ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 28

ಸದಸ್ಯರ ಹೆಸರು : ಶ್ರೀ ಉಮೇಶ್ ವಿಶ್ವನಾಥ್ ಕತ್ತಿ (ಹುಕ್ಕೇರಿ)

ಉತ್ತರಿಸುವ ದಿನಾಂಕ : 24.09.2020

ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
(ಅ)	ಪ್ರಸ್ತುತ ವರ್ಷದಲ್ಲಿ ರಾಜ್ಯದಲ್ಲಿ ಹೊಸದಾಗಿ ಪ್ರಥಮ ದರ್ಜೆ ಕಾಲೇಜುಗಳನ್ನು ಮಂಜೂರು ಮಾಡಲು ಉದ್ದೇಶಿಸಲಾಗಿದೆಯೇ; ಹಾಗಿದ್ದಲ್ಲಿ, ಎಷ್ಟು ಕಾಲೇಜುಗಳನ್ನು ಸ್ಥಾಪನೆ ಮಾಡಲು ಉದ್ದೇಶಿಸಲಾಗಿದೆ (ಜಿಲ್ಲಾವಾರು ಮಾಹಿತಿ ನೀಡುವುದು);	ಇಲ್ಲ
ಆ)	ರಾಜ್ಯದಲ್ಲಿ ಹೊಸದಾಗಿ ಪ್ರಥಮ ದರ್ಜೆ ಕಾಲೇಜುಗಳು ಮಂಜೂರು ಮಾಡಲು ಸರ್ಕಾರಕ್ಕೆ ಪ್ರಸ್ತಾವನೆಗಳೇನಾದರೂ ಸಲ್ಲಿಕೆಯಾಗಿದೆಯೇ; ಸ್ವೀಕೃತವಾಗಿದ್ದಲ್ಲಿ, ಎಷ್ಟು ಕಾಲೇಜುಗಳಿಗೆ ಬೇಡಿಕೆ ಸಲ್ಲಿಸಲಾಗಿದೆ;	ಪ್ರಸ್ತುತ ಇರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಅತ್ಯಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಆದ್ಯತೆ ನೀಡುತ್ತಿರುವುದರಿಂದ ಹಾಗೂ ಪ್ರಸಕ್ತ ಸಾಲಿನಲ್ಲಿ ಕೋವಿಡ್-19 ಪ್ರಯುಕ್ತ ಆರ್ಥಿಕ ನಿರ್ಬಂಧ ಜಾರಿಯಲ್ಲಿರುವುದರಿಂದ ಹೊಸ ಕಾಲೇಜು ಪ್ರಾರಂಭಿಸುವ ಉದ್ದೇಶ ಇಲ್ಲದಿರುವುದರಿಂದ ಹೊಸ ಕಾಲೇಜು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.
ಇ)	ಬೆಳಗಾವಿ ಜಿಲ್ಲೆ ಹುಕ್ಕೇರಿ ವಿಧಾನಸಭಾ ಮತಕ್ಷೇತ್ರದ ವ್ಯಾಪ್ತಿಯ ಸಂಕೇಶ್ವರ ಪಟ್ಟಣದಲ್ಲಿ ಪ್ರಥಮ ದರ್ಜೆ ಕಾಲೇಜು ಮಂಜೂರಾತಿಗೆ ಬೇಡಿಕೆ ಬಂದಿದೆಯೆ;	ಸಂಕೇಶ್ವರ ಪಟ್ಟಣದಲ್ಲಿ ಪ್ರಥಮ ದರ್ಜೆ ಕಾಲೇಜು ಪ್ರಾರಂಭಕ್ಕಾಗಿ ಮಾನ್ಯ ವಿಧಾನಸಭೆ ಸದಸ್ಯರಾದ ಶ್ರೀ ಉಮೇಶ್ ವಿಶ್ವನಾಥ್ ಕತ್ತಿ ಇವರಿಂದ ಬೇಡಿಕೆ ಬಂದಿರುತ್ತದೆ.
ಈ)	ಬಂದಿದ್ದಲ್ಲಿ, ಸಂಕೇಶ್ವರದಲ್ಲಿ ಪ್ರಥಮ ದರ್ಜೆ ಕಾಲೇಜು ಮಂಜೂರು ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು?	ಸಂಕೇಶ್ವರದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜನ್ನು ಪ್ರಾರಂಭಿಸುವ ಕುರಿತು ಸಲ್ಲಿಸಲಾಗಿದ್ದ ಬೇಡಿಕೆಗೆ ಸಂಬಂಧಿಸಿದಂತೆ ಪ್ರಾದೇಶಿಕ ಜಂಟಿ ನಿರ್ದೇಶಕರು ಅಪೂರ್ಣ ವರದಿಯನ್ನು ಸಲ್ಲಿಸಿದ್ದರಿಂದ ಪೂರ್ಣ ವಿವರಗಳೊಂದಿಗೆ ಸ್ಥಳ ಪರಿಶೀಲನಾ ವರದಿ ಸಲ್ಲಿಸುವಂತೆ ಪ್ರಾದೇಶಿಕ ಜಂಟಿ ನಿರ್ದೇಶಕರು, ಧಾರವಾಡ ಇವರಿಗೆ ತಿಳಿಸಲಾಗಿದೆ. ಆದರೆ, ಮೇಲೆ ವಿವರಿಸಿರುವ ಕಾರಣಗಳಿಂದ ಹೊಸದಾಗಿ ಕಾಲೇಜುಗಳನ್ನು ಪ್ರಾರಂಭಿಸಲಾಗುತ್ತಿಲ್ಲ.

ಕಡತ ಸಂಖ್ಯೆ: ಇಡಿ 154 ಹೆಚ್‌ಪಿಸಿ 2020

(ಡಾ: ಅಶ್ವಥ್ ನಾರಾಯಣ ಸಿ.ಎನ್)
ಉಪ ಮುಖ್ಯಮಂತ್ರಿಗಳು ಹಾಗೂ
ಉನ್ನತ ಶಿಕ್ಷಣ ಸಚಿವರು

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	139
ಮಾನ್ಯ ಸದಸ್ಯರ ಹೆಸರು	ಶ್ರೀ ಐಹೋಳೆ ಡಿ. ಮಹಾಲಿಂಗಪ್ಪ (ರಾಯಭಾಗ)
ಉತ್ತರಿಸಬೇಕಾದ ದಿನಾಂಕ	24-09-2020
ಉತ್ತರಿಸುವ ಸಚಿವರು	ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ.ಸಂ.	ಪ್ರಶ್ನೆ	ಉತ್ತರ
ಅ	ರಾಜ್ಯ ಸರ್ಕಾರದ ಫಾರ್ಮಾಸಿಸ್ಟ್ ಸಂಘದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿ / ನೌಕರರೆಷ್ಟು; (ವೃಂದವಾರು ವಿವರ ನೀಡುವುದು)	ಸರ್ಕಾರಿ ನೌಕರರ ಸಂಘಗಳಲ್ಲಿನ ಕೆಲಸ-ಕಾರ್ಯಗಳಿಗೆ ಸಂಬಂಧಿಸಿದಂತೆ ಸಿಬ್ಬಂದಿಗಳನ್ನು ಸಂಘಗಳ ವತಿಯಿಂದಲೇ ಖಾಸಗಿಯಾಗಿ ನೇಮಕ ಮಾಡಿಕೊಳ್ಳಲಾಗುತ್ತದೆ. ಹೀಗಾಗಿ ರಾಜ್ಯದಲ್ಲಿನ ಫಾರ್ಮಾಸಿಸ್ಟ್ ಸಂಘದಲ್ಲಿ ಸರ್ಕಾರಿ ಫಾರ್ಮಾಸಿಸ್ಟ್ ನೌಕರರು ಯಾರೂ ಕಾರ್ಯ ನಿರ್ವಹಿಸುತ್ತಿಲ್ಲ.
ಆ	ಈ ನೌಕರರುಗಳಿಗೆ ನೀಡುತ್ತಿರುವ ವೇತನವೆಷ್ಟು;	ಅನ್ವಯಿಸುವುದಿಲ್ಲ.
ಇ	ಪ್ರಸ್ತುತ ನೀಡುತ್ತಿರುವ ವೇತನವನ್ನು ಪರಿಷ್ಕರಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ;	
ಈ	ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಪರಿಷ್ಕರಿಸಲಾಗುವುದು; ಇಲ್ಲದಿದ್ದಲ್ಲಿ, ಕಾರಣಗಳೇನು;	
ಉ	ಸರ್ಕಾರ ಈ ನೌಕರರ ವೇತನ ಮತ್ತು ಭತ್ಯೆಗಳನ್ನು ಪರಿಷ್ಕರಿಸಿ ಇವರುಗಳಿಗೆ ಅನುಕೂಲ ಮಾಡಿಕೊಡುವುದೇ; ಇವರ ವೇತನ ಮತ್ತು ಭತ್ಯೆಗಳನ್ನು ಪರಿಷ್ಕರಿಸಲು ಸರ್ಕಾರಕ್ಕಿರುವ ತೊಂದರೆಗಳೇನು? (ವಿವರ ನೀಡುವುದು)	

ಸಂಖ್ಯೆ: ಆಕುಕ 236 ಹೆಚ್‌ಎಸ್‌ಎಂ 2020

(ಬಿ. ಶ್ರೀರಾಮುಲು)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	163
ಸದಸ್ಯರ ಹೆಸರು	ಶ್ರೀ ಸತೀಶ್ ಎಲ್ ಜಾರಕಿಹೊಳಿ(ಯಮಕನಮರಡಿ)
ಉತ್ತರಿಸಬೇಕಾದ ದಿನಾಂಕ	24.09.2020
ಉತ್ತರಿಸುವವರು	ಮಾನ್ಯ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರು.

ಕ್ರ ಸಂ	ಪ್ರಶ್ನೆ	ಉತ್ತರ
ಅ)	ಅರಣ್ಯ ಇಲಾಖೆಯ ವಿವಿಧ ವೃಂದಗಳಲ್ಲಿ ಪದೋನ್ನತಿ ನೀಡುವಲ್ಲಿ ವಿಳಂಬವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ.	– ಹೌದು –
ಆ)	ಬಂದಿದ್ದಲ್ಲಿ, ವಿಳಂಬಕ್ಕೆ ಕಾರಣಗಳೇನು?	ಕರ್ನಾಟಕ (ರಾಜ್ಯ ಅರಣ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ) ಮೀಸಲಾತಿ ಆಧಾರದ ಮೇಲೆ ಬಡ್ತಿ ಹೊಂದಿರುವ ಸರ್ಕಾರಿ ನೌಕರರಿಗೆ ತತ್ಪರಿಣಾಮವಾದ ಜೇಷ್ಠತೆಯನ್ನು ವಿಸ್ತರಿಸುವ ಅಧಿನಿಯಮ, 2017 ರನ್ವಯ ಹಾಗೂ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 186 ಎಸ್ ಆರ್ ಎಸ್ 2018, ದಿನಾಂಕ: 27.02.2019 ಮತ್ತು 15.05.2019 ರಲ್ಲಿ ಮಾರ್ಗಸೂಚಿಗಳನ್ವಯ ಅರಣ್ಯ ಇಲಾಖೆಯ ವಿವಿಧ ವೃಂದಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅಧಿಕಾರಿ/ ಸಿಬ್ಬಂದಿ ಸೇವಾ ಹಿರಿತನ ನಿಗದಿಪಡಿಸುವಲ್ಲಿ ಹಾಗೂ ಪದೋನ್ನತಿ ನೀಡುವ ಸಂದರ್ಭದಲ್ಲಿ ಉಂಟಾಗಿರುವ ನ್ಯೂನತೆಗಳನ್ನು ಸರಿಪಡಿಸಲು ಸರ್ಕಾರದ ಆದೇಶ ಸಂಖ್ಯೆ: ಅಪಜೀ 116 ಅಪಸೇ 2019 ದಿನಾಂಕ:11.11.2019ರಲ್ಲಿ ಒಂದು ಸಮಿತಿಯನ್ನು ರಚಿಸಲಾಗಿತ್ತು. ಸದರಿ ಸಮಿತಿಯು ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿದ್ದು, ಸದರಿ ವರದಿಯನುಸಾರ ಕೂಡಲೇ ಪರಿಷ್ಕೃತ ಜೇಷ್ಠತಾ ಪಟ್ಟಿಗಳನ್ನು ಅಂತಿಮಗೊಳಿಸುವಂತೆ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯ ಪಡೆ ಮುಖ್ಯಸ್ಥರು) ರವರಿಗೆ ತಿಳಿಸಲಾಗಿದೆ.
ಇ)	ಅರ್ಹರಿಗೆ ಯಾವಾಗ ಪದೋನ್ನತಿ ನೀಡಲಾಗುವುದು?	ಅರಣ್ಯ ಇಲಾಖೆಯಲ್ಲಿನ ವಿವಿಧ ವೃಂದಗಳ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸುವ ಕಾರ್ಯವು ಪ್ರಸ್ತುತ ಚಾಲನೆಯಲ್ಲಿದ್ದು, ಜೇಷ್ಠತಾ ಪಟ್ಟಿ ಅಂತಿಮಗೊಂಡ ನಂತರ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಹಾಗೂ ಲಭ್ಯವಾಗುವ ರಿಕ್ತಸ್ಥಾನಗಳ ಆಧಾರದ ಮೇಲೆ ಪದೋನ್ನತಿ ನೀಡಲಾಗುವುದು.

ಸಂಖ್ಯೆ: ಎಫ್‌ಇಇ 170 ಎಫ್‌ಇಜಿ 2020

(ಆನಂದ್ ಸಿಂಗ್)
ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರು.

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	164
ಸದಸ್ಯರ ಹೆಸರು	:	ಶ್ರೀ ಸತೀಶ್ ಎಲ್. ಜಾರಕಿಹೊಳಿ
ಉತ್ತರಿಸುವ ದಿನಾಂಕ	:	24-09-2020
ಉತ್ತರಿಸುವ ಸಚಿವರು	:	ಉಪ ಮುಖ್ಯಮಂತ್ರಿಗಳು ಹಾಗೂ ಸಮಾಜ ಕಲ್ಯಾಣ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ಅರಣ್ಯ ಹಕ್ಕುಪತ್ರ ಪಡೆದ ಫಲಾನುಭವಿಗಳು ಖಾಸಗಿ ಮತ್ತು ಆಶ್ರಯ ಯೋಜನೆಯಡಿ ಮನೆ ನಿರ್ಮಿಸಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ವಸತಿ ಉದ್ದೇಶಕ್ಕಾಗಿ ಅರಣ್ಯ ಹಕ್ಕು ಅಧಿನಿಯಮದಡಿ ಹಕ್ಕುಪತ್ರ ಪಡೆಯಲು ಅವಕಾಶವಿದ್ದು, ಸದರಿ ಉದ್ದೇಶಕ್ಕಾಗಿ ಹಕ್ಕು ಪತ್ರ ಪಡೆದವರಿಗೆ ಮನೆ ನಿರ್ಮಾಣಕ್ಕೆ ಸಂಬಂಧಿಸಿದಂತೆ ತೊಂದರೆಯಾಗಿರುವ ಪ್ರಕರಣಗಳು ಕಂಡು ಬಂದಿರುವುದಿಲ್ಲ.
ಆ)	ಬಂದಿದ್ದಲ್ಲಿ, ಆ ದಿಸೆಯಲ್ಲಿ ಕೈಗೊಂಡ ಕ್ರಮಗಳೇನು?	ಅನ್ವಯಿಸುವುದಿಲ್ಲ

ಸಕಇ 272 ಎಸ್‌ಟಿಪಿ 2020

(ಗೋವಿಂದ ಎಂ. ಕಾರಜೋಳ)
ಉಪ ಮುಖ್ಯಮಂತ್ರಿಗಳು ಹಾಗೂ ಸಮಾಜ
ಕಲ್ಯಾಣ ಸಚಿವರು

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	166
ಮಾನ್ಯ ಸದಸ್ಯರ ಹೆಸರು	ಶ್ರೀ ಐಹೊಳೆ ಡಿ.ಮಹಾಲಿಂಗಪ್ಪ (ರಾಯಭಾಗ)
ಉತ್ತರಿಸಬೇಕಾದ ದಿನಾಂಕ	24-09-2020
ಉತ್ತರಿಸುವ ಸಚಿವರು	ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
(ಅ)	ಬೆಳಗಾವಿ ಜಿಲ್ಲೆ, ರಾಯಭಾಗ ತಾಲ್ಲೂಕಿನ ದಿಗ್ಗೇವಾಡಿ ಮತ್ತು ಬೆಂಡವಾಡ ಗ್ರಾಮಗಳಲ್ಲಿ ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;	ಇಲ್ಲ
(ಆ)	ಹಾಗಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಈ ಸ್ಥಳಗಳಲ್ಲಿ ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಪ್ರಾರಂಭಿಸಿ ಇಲ್ಲಿನ ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಿ ಕೊಡಲಾಗುವುದು;-	ಉದ್ಭವಿಸುವುದಿಲ್ಲ.
(ಇ)	ಹಾಗಿಲ್ಲದಿದ್ದಲ್ಲಿ, ಅದಕ್ಕೆ ಕಾರಣಗಳೇನು? (ವಿವರ ನೀಡುವುದು)	ರಾಜ್ಯದಲ್ಲಿ ವಿಶೇಷವಾಗಿ ಗ್ರಾಮೀಣ ಪ್ರದೇಶಗಳಲ್ಲಿ ಜನಸಾಂದ್ರತೆ ಇರುವ ಕಡೆ ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಪ್ರಾರಂಭಿಸಲು ಪೈಲಟ್ ಅಧ್ಯಯನ ಕೈಗೊಂಡಿದ್ದು, ಪೈಲಟ್ ಅಧ್ಯಯನ ವರದಿ ಬಂದ ನಂತರ ಪರಿಶೀಲಿಸಲಾಗುವುದು.

ಆಕುಕ 103 ಎಸ್‌ಬಿವಿ 2020

(ಬಿ. ಶ್ರೀರಾಮುಲು)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 168
ಮಾನ್ಯ ಸದಸ್ಯರ ಹೆಸರು : ಶ್ರೀ ಐಹೋಳೆ ಡಿ.ಮಹಾಲಿಂಗಪ್ಪ (ರಾಯಭಾಗ)
ಉತ್ತರಿಸಬೇಕಾದ ದಿನಾಂಕ : 24-9-2020
ಉತ್ತರಿಸುವ ಸಚಿವರು : ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
1	ಬೆಳಗಾವಿ ಜಿಲ್ಲೆಯ ರಾಯಭಾಗ ಮತಕ್ಷೇತ್ರದ ವ್ಯಾಪ್ತಿಯ ರಾಯಭಾಗ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
2	ಬಂದಿದ್ದಲ್ಲಿ, ಈ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ಮೂಲಭೂತ ಸೌಕರ್ಯಗಳಾದ ಕುಡಿಯುವ ನೀರು, ಆಸ್ಪತ್ರೆಗೆ ಕೌಂಪೌಂಡ್ ಹಾಗೂ ಸಂಪರ್ಕ ರಸ್ತೆಗಳನ್ನು ನಿರ್ಮಿಸಲು ಸರ್ಕಾರವು ಯಾವ ಕ್ರಮಗಳನ್ನು ಕೈಗೊಳ್ಳುತ್ತಿದೆ;	ನಸಲಾಪುರ, ಬ್ಯಾಕೂಡ, ಕರಗಾಂವ, ಜೈನಾಪೂರ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ನೀರು ಸರಬರಾಜು, ದುರಸ್ತಿ ಹಾಗೂ ವಿದ್ಯುತ್ ದುರಸ್ತಿ ಕೆಲಸವನ್ನು ವಿವಿಧ ಅನುದಾನದಡಿ ಈಗಾಗಲೇ ನಿರ್ವಹಿಸಲಾಗಿದೆ. ಮುಂದುವರೆದು, ಬ್ಯಾಕೂಡ ಪ್ರಾಥಮಿಕ ಆರೋಗ್ಯ ಕೇಂದ್ರದ ಆವರಣ ಗೋಡೆ ನಿರ್ಮಾಣ ಕಾಮಗಾರಿಯನ್ನು ಹಾಗೂ ಕರಗಾಂವ ಪ್ರಾಥಮಿಕ ಆರೋಗ್ಯ ಕೇಂದ್ರದ ಫ್ಲೋರಿಂಗ್, ಕಿಟಿಕಿ ಬಾಗಿಲು ಕಾಮಗಾರಿಗಳನ್ನು ಮುಂದಿನ ಕ್ರಿಯಾ ಯೋಜನೆಯಲ್ಲಿ ಸೇರ್ಪಡೆಗೊಳಿಸಿಕೊಂಡು, ಕೈಗೊಳ್ಳಲಾಗುವುದು. ಜೈನಾಪೂರ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು 2018-19 ನೇ ಸಾಲಿನಲ್ಲಿ ಹೊಸದಾಗಿ ನಿರ್ಮಿಸಲಾಗಿದ್ದು, ಎಲ್ಲಾ ಮೂಲಭೂತ ಸೌಕರ್ಯಗಳನ್ನು ಹೊಂದಿರುತ್ತದೆ.
3	ಯಾವ ಕಾಲಮಿತಿಯಲ್ಲಿ ಈ ಆರೋಗ್ಯ ಕೇಂದ್ರಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುವುದು;	
4	ಇಲ್ಲದಿದ್ದಲ್ಲಿ, ಅದಕ್ಕೆ ಕಾರಣಗಳೇನು? (ನೀಡುವುದು)	

ಆಕುಕ 108 ಎಸ್.ಎಂ.ಎಂ. 2020

(ಬಿ. ಶ್ರೀರಾಮುಲು)

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ

ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	170
ಮಾನ್ಯ ಸದಸ್ಯರ ಹೆಸರು	ಶ್ರೀ ಐಹೊಳೆ ಡಿ.ಮಹಾಲಿಂಗಪ್ಪ (ರಾಯಭಾಗ)
ಉತ್ತರಿಸಬೇಕಾದ ದಿನಾಂಕ	24-09-2020
ಉತ್ತರಿಸುವ ಸಚಿವರು	ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರಸಂ	ಪ್ರಶ್ನೆ	ಉತ್ತರ
(ಅ)	ಬೆಳಗಾವಿ ಜಿಲ್ಲೆಯ ರಾಯಭಾಗ ಮತಕ್ಷೇತ್ರದ ರಾಯಭಾಗ ಹಾಗೂ ಚಿಕ್ಕೋಡಿ ತಾಲ್ಲೂಕಿನ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;	ಇಲ್ಲ.
(ಆ)	ಹಾಗಿದ್ದಲ್ಲಿ, ಈ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸಲು ಸರ್ಕಾರ ಅನುದಾನವನ್ನು ಮೀಸಲಿರಿಸಿದೆಯೇ; ಹೌದಾದಲ್ಲಿ, ಯಾವ ಕಾಲಮಿತಿಯಲ್ಲಿ ಈ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸಲಾಗುವುದು;	ಉದ್ಭವಿಸುವುದಿಲ್ಲ.
(ಇ)	ಇಲ್ಲದಿದ್ದಲ್ಲಿ ಅವುಗಳಿಗೆ ಕಾರಣಗಳೇನು? (ವಿವರ ನೀಡುವುದು)	ಈಗಾಗಲೇ ಸ್ಥಾಪಿಸಲಾಗಿರುವ ಸಮುದಾಯ ಆರೋಗ್ಯ ಕೇಂದ್ರಗಳಿಗೆ ಮೂಲಭೂತ ಸೌಲಭ್ಯ ಹಾಗೂ ತಜ್ಞ ವೈದ್ಯರ/ಸಿಬ್ಬಂದಿಗಳ ನೇಮಕಾತಿಗೆ ಆದ್ಯತೆ ನೀಡಲಾಗುತ್ತಿದೆ.

ಆಕುಕ 104 ಎಸ್‌ಬಿವಿ 2020

(ಬಿ. ಶ್ರೀರಾಮುಲು)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 175
ಮಾನ್ಯ ಸದಸ್ಯರ ಹೆಸರು : ಶ್ರೀ ನಿಸರ್ಗ ನಾರಾಯಣ ಸ್ವಾಮಿ ಎಲ್.ಎಲ್. (ದೇವನಹಳ್ಳಿ)
ಉತ್ತರಿಸಬೇಕಾದ ದಿನಾಂಕ : 24-9-2020
ಉತ್ತರಿಸುವ ಸಚಿವರು : ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
1	ದೇವನಹಳ್ಳಿ ವಿಧಾನಸಭಾ ಕ್ಷೇತ್ರವು ಮೀಸಲು ಕ್ಷೇತ್ರವಾಗಿದ್ದು, ಇಲ್ಲಿ ಹೆಚ್ಚು ಪರಿಶಿಷ್ಟ ಜಾತಿ/ವರ್ಗ, ಬಡ ಹಿಂದುಳಿದ ವರ್ಗದವರೇ ವಾಸಿಸುತ್ತಿದ್ದು, ಇಲ್ಲಿನ ಜನರಿಗೆ ಉತ್ತಮ ವೈದ್ಯಕೀಯ ಸೇವೆಗಾಗಿ ತಾಲ್ಲೂಕು ಆಸ್ಪತ್ರೆಯನ್ನು ಅಗತ್ಯ ಮೂಲಭೂತ ಸೌಲಭ್ಯಗಳೊಂದಿಗೆ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ? ಹಾಗಿದ್ದಲ್ಲಿ ಯಾವಾಗ, ಎಷ್ಟು ಹೆಚ್ಚುವರಿ ಹಾಸಿಗೆಗಳನ್ನೊಳಗೊಂಡ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸಲಾಗುವುದು? (ಪೂರ್ಣ ಮಾಹಿತಿ ನೀಡುವುದು)	ದೇವನಹಳ್ಳಿ ತಾಲ್ಲೂಕು ಮಟ್ಟದ ಆಸ್ಪತ್ರೆಯನ್ನು 100 ಹಾಸಿಗೆಗಳ ಸಾಮರ್ಥ್ಯಕ್ಕೆ ಸರ್ಕಾರದ ಆದೇಶ ಸಂಖ್ಯೆ: ಆಕುಕ 1068 ಸಿಜಿಎಂ 2006 ದಿನಾಂಕ: 25-1-2007 ರಲ್ಲಿ ಮೇಲ್ದರ್ಜೆಗೇರಿಸಲಾಗಿರುತ್ತದೆ. ಸದರಿ ಆಸ್ಪತ್ರೆಯನ್ನು 100 ಹಾಸಿಗೆಗಳ ಸಾಮರ್ಥ್ಯಕ್ಕೆ ಅಂದಾಜು ಮೊತ್ತ ರೂ. 905.00 ಲಕ್ಷಗಳಲ್ಲಿ ಮೇಲ್ದರ್ಜೆಗೇರಿಸಲು ನಬಾರ್ಡ್-23 ಯೋಜನೆಯಡಿ ಅನುಮೋದನೆ ದೊರೆತಿದೆ. ಕಾಮಗಾರಿ ಪ್ರಗತಿಯಲ್ಲಿದ್ದು, ಮಾರ್ಚ್-2021 ಅಂತ್ಯದೊಳಗೆ ಕಾಮಗಾರಿಯನ್ನು ಪೂರ್ಣಗೊಳಿಸಲು ಯೋಜಿಸಲಾಗಿದೆ.

ಆಕುಕ 104 ಎಸ್.ಎಂ.ಎಂ. 2020

(ಬಿ. ಶ್ರೀರಾಮುಲು)

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ

ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **179**
ಸದಸ್ಯರ ಹೆಸರು : ಶ್ರೀ. ಕುಮಾರ ಬಂಗಾರಪ್ಪ ಎಸ್. (ಸೊರಬ)
ಉತ್ತರಿಸಬೇಕಾದ ದಿನಾಂಕ : 24.09.2020
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ.	ಡಾ. ಡಿ. ಎಂ ನಂಜುಂಡಪ್ಪ ರವರ ವರದಿಯ ರೀತ್ಯಾ ಹಿಂದುಳಿದ ತಾಲ್ಲೂಕೆಂದು ಗುರುತಿಸಲ್ಪಟ್ಟ ಸೊರಬ ತಾಲ್ಲೂಕಿನಲ್ಲಿ ಶೇಕಡ 80ರಷ್ಟು ಸರ್ಕಾರಿ ಶಾಲೆಗಳಿಗೆ ಒಟ್ಟಾರೆ ಮೂಲಭೂತ ಸೌಕರ್ಯಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
ಆ.	ಬಂದಿದ್ದಲ್ಲಿ, ಈ ಶಾಲೆಗಳಲ್ಲಿ ಶಾಲಾ ಮಕ್ಕಳ ಅನುಪಾತಕ್ಕನುಗುಣವಾಗಿ, ಶುದ್ಧ ಕುಡಿಯುವ ನೀರು, ಇ-ಗ್ರಂಥಾಲಯ, ಕ್ರೀಡಾಂಗಣ ಡೆಸ್ಕ್ ಮತ್ತು ಕ್ರೀಡಾ ಸಾಮಗ್ರಿಗಳನ್ನು ಒದಗಿಸಲು ಕೈಗೊಂಡ ಕ್ರಮಗಳೇನು;	2019-20ನೇ ಸಾಲಿನ ಜಿಲ್ಲಾ ಪಂಚಾಯತ್ ಮುಂದುವರೆದ ಯೋಜನಾ ಕಾರ್ಯಕ್ರಮದಡಿಯಲ್ಲಿ ಸೊರಬ ತಾಲ್ಲೂಕಿನ 09 ಗ್ರಾಮಾಂತರ ಪ್ರೌಢಶಾಲೆಗಳಿಗೆ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಕಲ್ಪಿಸಲಾಗಿದೆ. 2019-20ನೇ ಸಾಲಿನಲ್ಲಿ ಮಳೆಯಿಂದ ಹಾನಿಯಾದ 15 ಶಾಲೆಗಳ 25 ಕೊಠಡಿಗಳ ಮರು ನಿರ್ಮಾಣಕ್ಕಾಗಿ ಒಟ್ಟು ರೂ. 303.00ಲಕ್ಷ ಅನುದಾನ ನಿಗದಿಯಾಗಿದ್ದು, ಲೋಕೋಪಯೋಗಿ ಇಲಾಖೆಗೆ ವಹಿಸಲಾಗಿದ್ದು, ಕಾಮಗಾರಿ ಪ್ರಗತಿಯಲ್ಲಿದೆ. ಉಳಿದ ಸೌಲಭ್ಯಗಳನ್ನು ಒದಗಿಸಲು ಅನುದಾನ ಲಭ್ಯತೆ ಆಧರಿಸಿ ಹಂತ ಹಂತವಾಗಿ ಕೈಗೊಳ್ಳಲು ಕ್ರಮವಹಿಸಲಾಗುವುದು.
ಇ.	ಈ ಶಾಲೆಗಳಿಗೆ ಪ್ರಾತ್ಯಕ್ಷಿಕೆಯ ವ್ಯವಸ್ಥೆಯನ್ನು ಕಲ್ಪಿಸಲಾಗಿದೆಯೇ? (ಸಂಪೂರ್ಣ ವಿವರ ನೀಡುವುದು)	18 ಪ್ರಾಥಮಿಕ ಶಾಲೆಗಳು ಹಾಗೂ 12 ಪ್ರೌಢಶಾಲೆಗಳಿಗೆ (ಪ್ರೊಜೆಕ್ಟರ್) ಅಳವಡಿಸಲಾಗಿದೆ (ಪ್ರತಿ ಲಗತ್ತಿಸಿದೆ).

ಸಂಖ್ಯೆ: ಇಪಿ 140 ಎಸ್‌ಓಹೆಚ್ 2020

(ಎಸ್. ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 517
ಸದಸ್ಯರ ಹೆಸರು : ಶ್ರೀ ಲಾಲಾಜಿ ಆರ್. ಮೆಂಡನ್(ಕಾಪು)
ಉತ್ತರಿಸಬೇಕಾದ ದಿನಾಂಕ : 24-09-2020
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು

ಕ್ರ ಸಂ	ಪ್ರಶ್ನೆ	ಉತ್ತರ
ಅ.	ಕಾಪು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿರುವ ಒಟ್ಟು ಸರ್ಕಾರಿ/ಖಾಸಗಿ ಪ್ರಾಥಮಿಕ/ಪ್ರೌಢ ಶಿಕ್ಷಣ ಶಾಲೆಗಳೆಷ್ಟು;	ಕಾಪು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿರುವ ಸರ್ಕಾರಿ/ಅನುದಾನಿತ ಶಾಲೆಗಳ ವಿವರ
ಆ.	ಈ ಕ್ಷೇತ್ರ ವ್ಯಾಪ್ತಿಯ ಶಾಲೆಗಳಲ್ಲಿ ವ್ಯಾಸಂಗ ನಡೆಸುತ್ತಿರುವ ವಿದ್ಯಾರ್ಥಿ/ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು?	ವಿದ್ಯಾರ್ಥಿಗಳ ವಿವರ

ಅ. ಶಾಲೆಗಳ ವಿವರ:

	ಸರ್ಕಾರಿ	ಅನುದಾನಿತ	ಅನುದಾನ ರಹಿತ	ಒಟ್ಟು
ಪ್ರಾಥಮಿಕ ಶಾಲೆಗಳು	50	38	13	101
ಪ್ರೌಢ ಶಾಲೆಗಳು	18	20	26	64
ಒಟ್ಟು				**165**

ಆ. ವಿದ್ಯಾರ್ಥಿಗಳ ವಿವರ:

ಶಾಲೆಗಳು	ಸರ್ಕಾರಿ	ಅನುದಾನಿತ	ಅನುದಾನ ರಹಿತ	**ಒಟ್ಟು**
ಗಂಡು	2546	2864	7347	**12757**
ಹೆಣ್ಣು	2574	2535	6584	**11693**
ಒಟ್ಟು	5120	5399	13931	**24450**

ಇಪಿ 31 ಪಿಎಂಎ 2020

(ಎಸ್. ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು.

ಕರ್ನಾಟಕ ವಿಧಾನಸಭೆ

1)	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	521
2)	ಮಾನ್ಯ ಸದಸ್ಯರ ಹೆಸರು	ಶ್ರೀ ಯಶವಂತರಾಯಗೌಡ ವಿಠ್ಠಲಗೌಡ ಪಾಟೀಲ್ (ಇಂಡಿ)
3)	ಉತ್ತರಿಸಬೇಕಾದ ದಿನಾಂಕ	24/09/2020
4)	ಉತ್ತರಿಸುವವರು	ಉಪ ಮುಖ್ಯಮಂತ್ರಿಗಳು ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಸಚಿವರು

****

ಕ್ರ ಸಂ	ಪ್ರಶ್ನೆ	ಉತ್ತರ
ಅ)	ವಿಜಯಪುರ ಜಿಲ್ಲೆ ಇಂಡಿಯಲ್ಲಿರುವ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಹಾಲಿ ಇರುವ ವೃತ್ತಿಪರ ತರಬೇತಿ ಕೋರ್ಸುಗಳು (ಟ್ರೇಡ್) ಯಾವುವು;	ವಿಜಯಪುರ ಜಿಲ್ಲೆ, ಇಂಡಿಯಲ್ಲಿರುವ ಸರ್ಕಾರಿ ಕೈಗಾರಿಕಾ ಸಂಸ್ಥೆಯಲ್ಲಿ ಹಾಲಿ ಎಲೆಕ್ಟ್ರೀಷಿಯನ್ ವೃತ್ತಿಯ ಎರಡು ಘಟಕಗಳು ಮತ್ತು ಫಿಟ್ಟರ್ ವೃತ್ತಿಯ ಎರಡು ಘಟಕಗಳು ಕಾರ್ಯನಿರ್ವಹಿಸುತ್ತಿವೆ.
ಆ)	ಸದರಿ ಸಂಸ್ಥೆಯಲ್ಲಿ ವೆಲ್ಡರ್, ಮೋಟಾರ್ ಮೆಕ್ಯಾನಿಕ್ ವೆಹಿಕಲ್, ಎಲೆಕ್ಟ್ರಾನಿಕ್ಸ್ ಮೆಕ್ಯಾನಿಕ್ ಹಾಗೂ ಟರ್ನರ್ ವೃತ್ತಿಪರ ತರಬೇತಿ ಕೋರ್ಸುಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು.
ಇ)	ಬಂದಿದ್ದಲ್ಲಿ, ಸದರಿ ವಿಷಯಗಳಲ್ಲಿ ಆಸಕ್ತಿ ಹೊಂದಿರುವ ವಿದ್ಯಾರ್ಥಿಗಳಿಗೆ ತೊಂದರೆಯುಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಇಲ್ಲ. ವಿಜಯಪುರ ಜಿಲ್ಲೆಯಲ್ಲಿ ವಿಜಯಪುರ, ಬಬಲೇಶ್ವರ, ನಿಡಗುಂದಿ, ತಿಕೋಟ, ನಲತ್‌ವಾಡ, ಮುದ್ದೇಬಿಹಾಳ, ಬಸವನಬಾಗೇವಾಡಿ, ದೇವರಹಿಪ್ಪರಗಿ, ಇಂಡಿ ಮತ್ತು ಧುಳ್‌ಖೇಡ ಈ ಸ್ಥಳಗಳಲ್ಲಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿದ್ದು, ಜಿಲ್ಲೆಯಾದ್ಯಂತ ವಿದ್ಯಾರ್ಥಿಗಳಿಗೆ ತೊಂದರೆಯಾಗದಂತೆ ವಿವಿಧ ವೃತ್ತಿಗಳಾದ ಫಿಟ್ಟರ್, ಟರ್ನರ್, ಮೆಷಿನಿಸ್ಟ್, ಎಲೆಕ್ಟ್ರೀಷಿಯನ್, ಎಲೆಕ್ಟ್ರಾನಿಕ್ ಮೆಕಾನಿಕ್, ಮೆಕಾನಿಕ್ ಮೋಟಾರ್ ವೆಹಿಕಲ್, ವೆಲ್ಡರ್ ಮತ್ತು ಕಂಪ್ಯೂಟರ್ ಆಪರೇಟರ್ ಅಂಡ್ ಪ್ರೊಗ್ರಾಮಿಂಗ್ ಅಸಿಸ್ಟೆಂಟ್, ವೃತ್ತಿಗಳಲ್ಲಿ ಕೌಶಲ್ಯ ತರಬೇತಿಯನ್ನು ನೀಡಲಾಗುತ್ತಿದೆ.
ಈ)	ಹಾಗಿದ್ದಲ್ಲಿ, ಇಂಡಿಯಲ್ಲಿರುವ ಕೈಗಾರಿಕಾ ಸಂಸ್ಥೆಯನ್ನು ಮೇಲ್ದರ್ಜೆಗೇರಿಸಿ ಅವಶ್ಯಕವಿರುವ ವೃತ್ತಿಪರ ತರಬೇತಿ ಕೋರ್ಸುಗಳನ್ನು ಯಾವಾಗ ಮಂಜೂರು ಮಾಡಲಾಗುವುದು; ಅದಕ್ಕಾಗಿ ಸರ್ಕಾರ ಕೈಗೊಳ್ಳುವ ಕ್ರಮಗಳೇನು?	ಮೇಲ್ದರ್ಜೆಗೇರಿಸುವ ಪ್ರಸ್ತಾವನೆಯು ಸರ್ಕಾರದ ಮುಂದೆ ಇರುವುದಿಲ್ಲ.

ಸಂಖ್ಯೆ: ಕೌಉಜೀಇ 47 ಕೈತಪ್ರ 2020

(ಡಾ.ಸಿ.ಎನ್.ಅಶ್ವಥ್ ನಾರಾಯಣ)
ಉಪ ಮುಖ್ಯಮಂತ್ರಿಗಳು ಹಾಗೂ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು

ಕರ್ನಾಟಕ ವಿಧಾನಸಭೆ

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ	525
ಮಾನ್ಯ ಸದಸ್ಯರ ಹೆಸರು	ಶ್ರೀ ಬಾಲಕೃಷ್ಣ.ಸಿ.ಎನ್.(ಶ್ರವಣಬೆಳಗೊಳ)
ಉತ್ತರಿಸಬೇಕಾದ ದಿನಾಂಕ	24.09.2020.
ಉತ್ತರಿಸುವ ಸಚಿವರು	ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ.ಸಂ.	ಪ್ರಶ್ನೆ	ಉತ್ತರ
ಅ	ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯಕೀಯ ಮತ್ತು ವೈದ್ಯಕೀಯೇತರ ಸಿಬ್ಬಂದಿ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ
ಆ	ಗ್ರಾಮೀಣ ಭಾಗದ ಆಸ್ಪತ್ರೆಗಳಲ್ಲಿ ಈ ಹುದ್ದೆಗಳು ಖಾಲಿ ಇರುವುದರಿಂದ ಆ ಭಾಗದ ರೋಗಿಗಳಿಗೆ ತೀವ್ರ ತೊಂದರೆಯಾಗುತ್ತಿರುವುದು ನಿಜವೇ;	ಲಭ್ಯವಿರುವ ವೈದ್ಯರು ಮತ್ತು ಸಿಬ್ಬಂದಿಗಳಿಂದ ರೋಗಿಗಳಿಗೆ ಯಾವುದೇ ತೊಂದರೆಯಾಗದಂತೆ ಚಿಕಿತ್ಸೆ ನೀಡಲಾಗುತ್ತಿದೆ.
ಇ	ಹಾಗಿದ್ದಲ್ಲಿ, ಸದರಿ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;ಹಾಗಿಲ್ಲದಿದ್ದಲ್ಲಿ, ಹುದ್ದೆಗಳನ್ನು ತುಂಬಲು ಸರ್ಕಾರಕ್ಕಿರುವ ತೊಂದರೆಗಳೇನು?	1. ತಜ್ಞ ವೈದ್ಯರು, ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳು ಹಾಗೂ ದಂತ ಆರೋಗ್ಯಾಧಿಕಾರಿಗಳ ಹುದ್ದೆಗಳನ್ನು ಭರ್ತಿಮಾಡಲು ಈಗಾಗಲೇ ದಿನಾಂಕ:10.09.2020 ರಂದು ವಿಶೇಷ ನೇಮಕಾತಿ ಸಮಿತಿಯಿಂದ ಭರ್ತಿಮಾಡಲು ಅಧಿಸೂಚನೆ ಹೊರಡಿಸಲಾಗಿದ್ದು, ಅರ್ಹ ಅಭ್ಯರ್ಥಿಗಳಿಂದ ಆನ್-ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು ನೇಮಕಾತಿ ಪ್ರಕ್ರಿಯೆ ಚಾಲ್ತಿಯಲ್ಲಿದೆ. 2. 883 ಶುಶ್ರೂಷಕರು (ಡಿಪ್ಲಮೋ) ಹುದ್ದೆಗಳಿಗೆ ದಿನಾಂಕ 16.07.2020 ರಲ್ಲಿ ಅಂತಿಮ ಆಯ್ಕೆಪಟ್ಟಿಯನ್ನು ಪ್ರಕಟಿಸಿದ್ದು, ಆಯ್ಕೆಯಾದ ಅಭ್ಯರ್ಥಿಗಳಿಗೆ ದಿನಾಂಕ:14.09.2020 ರಿಂದ 16.09.2020 ರವರೆಗೆ ಸ್ಥಳ ಆಯ್ಕೆಯ ಕೌನ್ಸಿಲಿಂಗ್ ನಡೆಸಲಾಗಿದ್ದು, ಪೊಲೀಸ್ ಪೂರ್ವಾಪರ, ಸಿಂಧುತ್ವ ಹಾಗೂ ಇನ್ನಿತರ ಎಲ್ಲಾ ವರದಿಗಳು ಸ್ವೀಕೃತವಾಗಿರುವ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡಲು ಕ್ರಮ ವಹಿಸಲಾಗುತ್ತಿದೆ.

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 532
ಸದಸ್ಯರ ಹೆಸರು : ಶ್ರೀ ಗೌರಿಶಂಕರ್ ಡಿ.ಸಿ. (ತುಮಕೂರು ಗ್ರಾಮಾಂತರ)
ಉತ್ತರಿಸುವ ದಿನಾಂಕ : 24.09.2020
ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ತುಮಕೂರು ಗ್ರಾಮಾಂತರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಬೆಳ್ಳಾವಿಗೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಮಂಜೂರಾಗಿರುವುದು ನಿಜವೇ;	ದಿ:16.02.2019ರಲ್ಲಿ ನೊಣವಿನಕೆರೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜನ್ನು ಬೆಳ್ಳಾವಿಗೆ ಸ್ಥಳಾಂತರಿಸಲಾಗಿದೆ.
ಆ)	ಹಾಗಿದ್ದಲ್ಲಿ, ಕಾಲೇಜಿಗೆ ಕಟ್ಟಡವನ್ನು ನಿರ್ಮಿಸಲಾಗಿದೆಯೇ; ಹಾಗಿಲ್ಲದಿದ್ದಲ್ಲಿ ಹೊಸ ಕಟ್ಟಡವನ್ನು ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;	ಸದರಿ ಕಾಲೇಜಿಗೆ ಇದುವರೆವಿಗೂ ನಿವೇಶನ ಮಂಜೂರಾಗಿರದ ಕಾರಣ ಕಟ್ಟಡವನ್ನು ನಿರ್ಮಿಸಲಾಗಿರುವುದಿಲ್ಲ. ನಿವೇಶನ ಮಂಜೂರಾದ ನಂತರ ಅನುದಾನದ ಲಭ್ಯತೆಯನುಸಾರ ಕಟ್ಟಡ ನಿರ್ಮಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು.
ಇ)	ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಕಟ್ಟಡದಲ್ಲಿ ಅಗತ್ಯ ಮೂಲಭೂತ ಸೌಕರ್ಯಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;	ಬಂದಿದೆ. ನೊಣವಿನಕೆರೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿದ್ದ ಪುಸ್ತಕ ಮತ್ತು ಪೀಠೋಪಕರಣ ಹಾಗೂ ಮಂಜೂರಾದ ಹುದ್ದೆಗಳನ್ನು ಬೆಳ್ಳಾವಿ ಕಾಲೇಜಿಗೆ ಸ್ಥಳಾಂತರಿಸಲಾಗಿರುತ್ತದೆ. ಪ್ರಸ್ತುತ ಕಾಲೇಜನ್ನು ಸಾರ್ವಜನಿಕ ಶಿಕ್ಷಣ ಇಲಾಖೆಯ ಪ್ರೌಢಶಾಲೆ ಕಟ್ಟಡದಲ್ಲಿ ತರಗತಿಗಳನ್ನು ನಡೆಸಲಾಗುತ್ತಿದ್ದು, ನಿವೇಶನ ಮಂಜೂರಾದ ನಂತರ ಅನುದಾನದ ಲಭ್ಯತೆಯನುಸಾರ ಕಟ್ಟಡ ನಿರ್ಮಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು.
ಈ)	ಅಗತ್ಯ ಮೂಲಭೂತ ಸೌಕರ್ಯಗಳ ಕೊರತೆಯಿಂದಾಗಿ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
ಉ)	ಹಾಗಿದ್ದಲ್ಲಿ ಅಗತ್ಯ ಮೂಲಭೂತ ಸೌಲಭ್ಯಕ್ಕಾಗಿ ಸರ್ಕಾರ ಅನುದಾನವನ್ನೇನಾದರೂ ಬಿಡುಗಡೆ ಮಾಡಿದೆಯೇ; ಹಾಗಿದ್ದಲ್ಲಿ ಬಿಡುಗಡೆ ಮಾಡಿದ ಅನುದಾನವೆಷ್ಟು ಮತ್ತು ಯಾವಾಗ ಬಿಡುಗಡೆಗೊಳಿಸಲಾಗಿದೆ?	2019-20ನೇ ಸಾಲಿನಲ್ಲಿ ಪಠ್ಯ ಪುಸ್ತಕಗಳಿಗಾಗಿ ರೂ.87,900.00 ಗಳನ್ನು ಬಿಡುಗಡೆ ಮಾಡಲಾಗಿದೆ. ನಿವೇಶನ ಮಂಜೂರಾದ ನಂತರ ಅನುದಾನದ ಲಭ್ಯತೆಯನುಸಾರ ಕಟ್ಟಡ ನಿರ್ಮಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು.

ಸಂಖ್ಯೆ: ಇಡಿ 152 ಹೆಚ್‌ಪಿಸಿ 2020

(ಡಾ: ಅಶ್ವಥ್ ನಾರಾಯಣ ಸಿ.ಎನ್)
ಉಪ ಮುಖ್ಯಮಂತ್ರಿ ಹಾಗೂ
ಉನ್ನತ ಶಿಕ್ಷಣ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:		535
ಮಾನ್ಯ ಸದಸ್ಯರ ಹೆಸರು		ಶ್ರೀ ಬಸವನಗೌಡ ದದ್ದಲ
ಉತ್ತರಿಸುವ ಸಚಿವರು		ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ)
ಉತ್ತರಿಸಬೇಕಾದ ದಿನಾಂಕ		24-09-2020
ಪ್ರಶ್ನೆ		ಉತ್ತರ
(ಅ)	ರಾಯಚೂರು ವಿಶ್ವವಿದ್ಯಾಲಯವನ್ನು 2020-21ನೇ ಸಾಲಿನಿಂದ ಪ್ರಾರಂಭಿಸುವಂತೆ ಈಗಾಗಲೇ ಅಧಿಕೃತವಾಗಿ ಸರ್ಕಾರಿ ಗೆಜೆಟ್‌ನಲ್ಲಿ ಹೊರಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯಾ;	ಬಂದಿದೆ.
(ಆ)	ಹಾಗಿದ್ದಲ್ಲಿ, ವಿಶ್ವವಿದ್ಯಾಲಯವನ್ನು ಯಾವಾಗ ಪ್ರಾರಂಭಿಸಲಾಗುವುದು; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು? (ಸಂಪೂರ್ಣ ವಿವರವನ್ನು ನೀಡುವುದು)	ರಾಯಚೂರು ವಿಶ್ವವಿದ್ಯಾನಿಲಯವನ್ನು ದಿನಾಂಕ: 01-08-2020 ರಿಂದ ಅಧಿಕೃತವಾಗಿ ಪ್ರಾರಂಭಿಸಲಾಗಿದೆ. ವಿಶ್ವವಿದ್ಯಾನಿಲಯದ ಪ್ರಥಮ ಕುಲಪತಿಗಳ ಆಯ್ಕೆಯ ಪ್ರಕ್ರಿಯೆಯು ಪ್ರಾರಂಭವಾಗಿದೆ.

ಸಂಖ್ಯೆ: ಇಡಿ 57 ಯುಜಿವಿ 2020

(ಡಾ: ಅಶ್ವತ್ಥ್ ನಾರಾಯಣ ಸಿ.ಎನ್.)
ಉಪ ಮುಖ್ಯಮಂತ್ರಿಗಳು
(ಉನ್ನತ ಶಿಕ್ಷಣ, ಐಟಿ & ಬಿಟಿ,
ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ)

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 538
ಸದಸ್ಯರ ಹೆಸರು : ಶ್ರೀ ನಿಂಬಣ್ಣನವರ್ ಸಿ.ಎಂ. (ಕಲಘಟಗಿ)
ಉತ್ತರಿಸಬೇಕಾದ ದಿನಾಂಕ : 24.09.2020
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು

ಕ್ರ.ಸ	ಪ್ರಶ್ನೆ	ಉತ್ತರ
ಅ)	ಧಾರವಾಡ ಜಿಲ್ಲೆಯ ಕಲಘಟಗಿ ವಿಧಾನಸಭಾ ಮತಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಕಲಘಟಗಿ ತಾಲ್ಲೂಕಿನ ಜಿನ್ನೂರ ಗ್ರಾಮ ಹಾಗೂ ಧಾರವಾಡ ತಾಲ್ಲೂಕಿನ ಮುಮ್ಮಿಗಟ್ಟಿ ಗ್ರಾಮದಲ್ಲಿ ಆರ್.ಎಂ.ಎಸ್.ಎ. ಯೋಜನೆಯಡಿಯಲ್ಲಿ ಸರ್ಕಾರಿ ಪ್ರೌಢಶಾಲಾ ಕಟ್ಟಡ ನಿರ್ಮಾಣಕ್ಕಾಗಿ ಅನುದಾನ ಮಂಜೂರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದುವರೆಗೂ ಕಾಮಗಾರಿಯನ್ನು ಪ್ರಾರಂಭಿಸದಿರಲು ಕಾರಣಗಳೇನು;	ಬಂದಿದೆ. ಧಾರವಾಡ ಜಿಲ್ಲೆಯ ಕಲಘಟಗಿ ತಾಲ್ಲೂಕಿನ ಜಿನ್ನೂರು ಗ್ರಾಮ ಮತ್ತು ಧಾರವಾಡ ತಾಲ್ಲೂಕಿನ ಮುಮ್ಮಿಗಟ್ಟಿ ಗ್ರಾಮಗಳಿಗೆ ಆರ್.ಎಂ.ಎಸ್.ಎ ಯೋಜನೆಯಡಿ ಮಂಜೂರಾದ ಪ್ರೌಢ ಶಾಲಾ ನೂತನ ಕಟ್ಟಡವನ್ನು ಸರ್ಕಾರಿ ಆದೇಶ ಸಂಖ್ಯೆ: ಇಡಿ 01 ಎಂ.ಸಿ.ಡಿ.2018 ದಿನಾಂಕ: 08.03.2018 ಅನ್ವಯ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದಿಂದ ಕಾಮಗಾರಿ ಕೈಗೊಳ್ಳಲು ಕ್ರಮವಹಿಸಲಾಗಿತ್ತು. ಆದರೆ, ಕೇಂದ್ರ ಸರ್ಕಾರದಿಂದ ಅನುದಾನ ಬಿಡುಗಡೆಯಾಗದ ಹಿನ್ನಲೆಯಲ್ಲಿ ಕಾಮಗಾರಿಯು ಸ್ಥಗಿತಗೊಂಡಿರುತ್ತದೆ. ಕೇಂದ್ರ ಸರ್ಕಾರದಿಂದ ಅನುದಾನ ಬಿಡುಗಡೆಯಾದ ನಂತರ ಕಾಮಗಾರಿ ಕೈಗೊಳ್ಳಲು ಕ್ರಮವಹಿಸಲಾಗುವುದು.
ಆ)	ಈ ಶಾಲಾ ಕಟ್ಟಡಗಳಿಗೆ ಬಿಡುಗಡೆಯದ ಅನುದಾನವೆಷ್ಟು; ಈ ಕಟ್ಟಡಗಳ ಕಾಮಗಾರಿಗಳಿಗೆ ಟೆಂಡರ್ ಕರೆಯಲಾಗಿದೆಯೇ;	ಸರ್ಕಾರಿ ಪ್ರೌಢಶಾಲೆ ಜಿನ್ನೂರು–ರೂ.142.05ಲಕ್ಷಗಳು ಸರ್ಕಾರಿ ಪ್ರೌಢಶಾಲೆ ಮುಮ್ಮಿಗಟ್ಟಿ– ರೂ.149.00ಲಕ್ಷಗಳ ಅನುದಾನ ಮಂಜೂರಾಗಿರುತ್ತದೆ. ಕೇಂದ್ರ ಸರ್ಕಾರದಿಂದ ಅನುದಾನ ಬಿಡುಗಡೆಯಾದ ನಂತರ ಕ್ರಮವಹಿಸಲಾಗುವುದು.
ಇ)	ಸದರಿ ಶಾಲಾ ಕಟ್ಟಡಗಳು ಅತಿ ಅವಶ್ಯವಿದ್ದು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು? (ಸಂಪೂರ್ಣ ಮಾಹಿತಿ ಒದಗಿಸುವುದು)	ಕೇಂದ್ರ ಸರ್ಕಾರದಿಂದ ಅನುದಾನ ಬಿಡುಗಡೆಯಾದ ನಂತರ ಸದರಿ ಕಾಮಗಾರಿಗಳನ್ನು ಕೈಗೆತ್ತಿಗೊಳ್ಳಲಾಗುವುದು.

ಇಪಿ 25 ಎಂಸಿಡಿ 2020

(ಎಸ್.ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:		539
ಮಾನ್ಯ ಸದಸ್ಯರ ಹೆಸರು		ಶ್ರೀ ಅಮೃತ್ ಅಯ್ಯಪ್ಪ ದೇಸಾಯಿ (ಧಾರವಾಡ)
ಉತ್ತರಿಸುವ ಸಚಿವರು		ಮಾನ್ಯ ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ)
ಉತ್ತರಿಸಬೇಕಾದ ದಿನಾಂಕ		24.09.2020
ಪ್ರಶ್ನೆ		ಉತ್ತರ
(ಅ)	ಧಾರವಾಡ ತಾಲ್ಲೂಕು ನರೇಂದ್ರ ಗ್ರಾಮ ಪಂಚಾಯತ್ ವ್ಯಾಪ್ತಿಯ ಕಾಯಕನಗರ ವಸತಿ ಸಮುಚ್ಚಯವನ್ನು ಕರ್ನಾಟಕ ಜಾನಪದ ವಿಶ್ವವಿದ್ಯಾನಿಲಯ, ಗೋಟಗೋಡಿ ಗ್ರಾಮ, ಶಿಗ್ಗಾಂವ ತಾಲ್ಲೂಕು, ಹಾವೇರಿ ಜಿಲ್ಲೆ ಇವರಿಗೆ ಹಸ್ತಾಂತರಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿಲ್ಲ
(ಆ)	ಬಂದಿದ್ದಲ್ಲಿ, ಇಲ್ಲಿ ಮೂಲಭೂತ ಸೌಕರ್ಯ ಹಾಗೂ ಅಭಿವೃದ್ಧಿ ಕಾಮಗಾರಿಯನ್ನು ಕೈಗೊಳ್ಳುವ ಯೋಜನೆ ಸರ್ಕಾರದ ಮುಂದಿದೆಯೇ;	ಉದ್ಭವಿಸುವುದಿಲ್ಲ.
(ಇ)	ಹಾಗಿದ್ದಲ್ಲಿ, ಯೋಜನೆಯ ಸ್ವರೂಪದ ಸಂಪೂರ್ಣ ಮಾಹಿತಿಯನ್ನು ಒದಗಿಸುವುದು?	

ಸಂಖ್ಯೆ: ಇಡಿ 279 ಯುಎನ್ಇ 2020

(ಡಾ: ಅಶ್ವಥ್ ನಾರಾಯಣ ಸಿ.ಎನ್.)
ಉಪ ಮುಖ್ಯಮಂತ್ರಿಗಳು
(ಉನ್ನತ ಶಿಕ್ಷಣ, ಐಟಿ & ಬಿಟಿ,
ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ).

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	541
ಮಾನ್ಯ ಸದಸ್ಯರ ಹೆಸರು	ಶ್ರೀ ನರೇಂದ್ರ ಆರ್. (ಹನೂರು)
ಉತ್ತರಿಸಬೇಕಾದ ದಿನಾಂಕ	24-09-2020
ಉತ್ತರಿಸುವ ಸಚಿವರು	ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ.ಸಂ.	ಪ್ರಶ್ನೆ	ಉತ್ತರ
ಅ	ಚಾಮರಾಜನಗರ ಜಿಲ್ಲೆಯ ಕೊರೋನಾ ಚಿಕಿತ್ಸಾ ಕೇಂದ್ರಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ವೈದ್ಯರು ಹಾಗೂ ನರ್ಸ್‌ಗಳ ಸಂಖ್ಯೆ ಎಷ್ಟು (ವಿವರ ನೀಡುವುದು)	• ಚಾಮರಾಜನಗರ ಜಿಲ್ಲೆಯ ಕೊರೋನಾ ಚಿಕಿತ್ಸಾ ಕೇಂದ್ರಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ವೈದ್ಯರ ಸಂಖ್ಯೆ:170 • ಚಾಮರಾಜನಗರ ಜಿಲ್ಲೆಯ ಕೊರೋನಾ ಚಿಕಿತ್ಸಾ ಕೇಂದ್ರಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನರ್ಸ್‌ಗಳ ಸಂಖ್ಯೆ:137
ಆ	ಜಿಲ್ಲೆಯಲ್ಲಿನ ಕ್ವಾರಂಟೈನ್ ಕೇಂದ್ರಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ವೈದ್ಯರು ಹಾಗೂ ದಾದಿಯರು (ನರ್ಸ್) ಹಾಗೂ ಇನ್ನಿತರ ಸಿಬ್ಬಂದಿಗಳ ಸಂಖ್ಯೆ ಎಷ್ಟು ? (ಸಂಪೂರ್ಣ ವಿವರ ನೀಡುವುದು)	• ಜಿಲ್ಲೆಯಲ್ಲಿನ ಕ್ವಾರಂಟೈನ್ ಕೇಂದ್ರಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ವೈದ್ಯರ ಸಂಖ್ಯೆ:50 • ಜಿಲ್ಲೆಯಲ್ಲಿನ ಕ್ವಾರಂಟೈನ್ ಕೇಂದ್ರಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ದಾದಿಯರ (ನರ್ಸ್) ಸಂಖ್ಯೆ:100 • ಜಿಲ್ಲೆಯಲ್ಲಿನ ಕ್ವಾರಂಟೈನ್ ಕೇಂದ್ರಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಇನ್ನಿತರೆ ಸಿಬ್ಬಂದಿಗಳ ಸಂಖ್ಯೆ:100

ಆಕುಕ 50 ಹೆಚ್‌ಎಸ್‌ಡಿ 2020

(ಬಿ.ಶ್ರೀರಾಮುಲು)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	542
ಮಾನ್ಯ ಸದಸ್ಯರ ಹೆಸರು	ಶ್ರೀ ಪುಟ್ಟರಂಗಶೆಟ್ಟಿ, ಸಿ (ಚಾಮರಾಜನಗರ)
ಉತ್ತರಿಸಬೇಕಾದ ದಿನಾಂಕ	24.09.2020
ಉತ್ತರಿಸುವ ಸಚಿವರು	ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ವಿವಿಧ ಸಮುದಾಯಗಳಿಗೆ ಸಂಬಂಧಿಸಿದ ಒಟ್ಟು ನಿಗಮಗಳ ಸಂಖ್ಯೆ ಎಷ್ಟು: (ಅಭಿವೃದ್ಧಿ ನಿಗಮಗಳವಾರು ಸಂಪೂರ್ಣ ವಿವರ ನೀಡುವುದು).	ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿರುವ ನಿಗಮಗಳು ಈ ಕೆಳಕಂಡಂತಿವೆ. 1. ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ. 2. ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮ. 3. ಕರ್ನಾಟಕ ಸವಿತ ಸಮಾಜ ಅಭಿವೃದ್ಧಿ ನಿಗಮ. 4. ಕರ್ನಾಟಕ ಮಡಿವಾಳ ಮಾಚೀದೇವ ಅಭಿವೃದ್ಧಿ ನಿಗಮ. 5. ಕರ್ನಾಟಕ ಅಲೆಮಾರಿ/ಅರೆ ಅಲೆಮಾರಿ ಅಭಿವೃದ್ಧಿ ನಿಗಮ. 6. ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮ. 7. ಕರ್ನಾಟಕ ಆರ್ಯ ವೈಶ್ಯ ಸಮುದಾಯ ಅಭಿವೃದ್ಧಿ ನಿಗಮ. 8. ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ.
ಆ)	2019-20 ಹಾಗೂ 2020-21ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ವಿವಿಧ ಸಮುದಾಯದ ಅಭಿವೃದ್ಧಿ ನಿಗಮಗಳಿಗೆ ನೀಡಲಾಗಿರುವ ಅನುದಾನವೆಷ್ಟು: (ನಿಗಮಗಳವಾರು ಸಂಪೂರ್ಣ ವಿವಿರ ನೀಡುವುದು).	2019-20 ಹಾಗೂ 2020-21ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ವಿವಿಧ ಸಮುದಾಯದ ಅಭಿವೃದ್ಧಿ ನಿಗಮಗಳಿಗೆ ನೀಡಲಾಗಿರುವ ಅನುದಾನ ವಿವರ ಈ ಕೆಳಕಂಡಂತಿದೆ.

(ರೂ.ಕೋಟಿಗಳಲ್ಲಿ)

ಕ್ರ. ಸಂ.	ನಿಗಮಗಳ ಹೆಸರು	ನೀಡಲಾಗಿರುವ ಅನುದಾನ	
		2019-20	2020-21
1	ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ	165.00	80.00
2	ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮ	8.00	5.29
3	ಕರ್ನಾಟಕ ಸವಿತ ಸಮಾಜ ಅಭಿವೃದ್ಧಿ ನಿಗಮ	2.00	-
4	ಕರ್ನಾಟಕ ಮಡಿವಾಳ ಮಾಚೀದೇವ ಅಭಿವೃದ್ಧಿ ನಿಗಮ	25.00	-
5	ಕರ್ನಾಟಕ ಅಲೆಮಾರಿ/ಅರೆ ಅಲೆಮಾರಿ ಅಭಿವೃದ್ಧಿ ನಿಗಮ	25.00	0.29
6	ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮ	25.00	10.00
7	ಕರ್ನಾಟಕ ಆರ್ಯ ವೈಶ್ಯ ಸಮುದಾಯ ಅಭಿವೃದ್ಧಿ ನಿಗಮ	1.00	5.00
8	ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ ನಿಯಮಿತ	8.00	25.00

ಸಂ:ಹಿಂವಕ 529 ಬಿಎಂಎಸ್ 2020

(ಬಿ.ಶ್ರೀರಾಮುಲು)
ಆರೋಗ್ಯ ಮತ್ತು ಕುಟುಂಬ ಕಲ್ಯಾಣಇಲಾಖೆ
ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	543
ಮಾನ್ಯ ಸದಸ್ಯರ ಹೆಸರು	ಶ್ರೀ ಎಸ್.ಎನ್.ನಾರಾಯಣಸ್ವಾಮಿ ಕೆ.ಎಂ (ಬಂಗಾರಪೇಟೆ)
ಉತ್ತರಿಸಬೇಕಾದ ದಿನಾಂಕ	24.09.2020
ಉತ್ತರಿಸುವ ಸಚಿವರು	ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ ಸಂ.	ಪ್ರಶ್ನೆ	ಉತ್ತರ
ಅ)	ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಸರ್ಕಾರವು ನಿಗದಿಗೊಳಿಸಿರುವ ಆಯವ್ಯಯದಲ್ಲಿ ಮೀಸಲಿರಿಸಿ ಬಿಡುಗಡೆ ಮಾಡಿದ ಹಾಗೂ ಖರ್ಚು ಮಾಡಿದ ಅನುದಾನವೆಷ್ಟು; (2019–20ನೇ ಜೂನ್ ಅಂತ್ಯದವರೆಗೆ ಸಂಪೂರ್ಣ ಮಾಹಿತಿ ನೀಡುವುದು)	ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಸರ್ಕಾರವು ಆಯವ್ಯಯದಲ್ಲಿ ನಿಗದಿಗೊಳಿಸಿರುವ ಅನುದಾನ, ಬಿಡುಗಡೆ ಮಾಡಿರುವ ಅನುದಾನ ಹಾಗೂ ಖರ್ಚು ಮಾಡಿರುವ ಅನುದಾನದ ವಿವರ **(2019–20ನೇ ಜೂನ್ ಅಂತ್ಯದವರೆಗೆ)** ಈ ಕೆಳಕಂಡಂತಿದೆ: **(ರೂ. ಲಕ್ಷಗಳಲ್ಲಿ)** **ಆರ್ಥಿಕ ವರ್ಷ** | **ಆಯವ್ಯಯದಲ್ಲಿ ಒದಗಿಸಿರುವ ಮೊತ್ತ** | **ಬಿಡುಗಡೆ ಯಾದ ಮೊತ್ತ** | **ವೆಚ್ಚ ಮಾಡಿದ ಮೊತ್ತ** 2019–20 (ಜೂನ್ ಅಂತ್ಯಕ್ಕೆ) | 267058.79 | 77438.28 | 26615.75
ಆ)	ಈ ಅವಧಿಯಲ್ಲಿ ಇಲಾಖೆಯಿಂದ ಎಷ್ಟು ವಿದ್ಯಾರ್ಥಿ/ವಿದ್ಯಾರ್ಥಿನಿಯರ ವಸತಿ ನಿಲಯಗಳನ್ನು ಮಂಜೂರು ಮಾಡಲಾಗಿದೆ; (ಮಂಜೂರು ಮಾಡಿದ ಈ ನಿಲಯಗಳ ನಿರ್ಮಾಣದ ಸಂಪೂರ್ಣ ವಿವರಗಳನ್ನು ಜಿಲ್ಲಾವಾರು ನೀಡುವುದು)	ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 2019–20ನೇ ಸಾಲಿನ ಜೂನ್ ಅಂತ್ಯದವರೆಗೆ ಹೊಸದಾಗಿ ಯಾವುದೇ ವಿದ್ಯಾರ್ಥಿನಿಲಯವನ್ನು ಮಂಜೂರು ಮಾಡಿರುವುದಿಲ್ಲ ಹಾಗೂ ಹೊಸ ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣಕ್ಕೆ ಮಂಜೂರಾತಿ ನೀಡಿರುವುದಿಲ್ಲ.
ಇ)	ವಸತಿ ನಿಲಯಗಳ ಪ್ರಸ್ತುತ ಸ್ಥಿತಿಗತಿಗಳೇನು? (ಮಾಹಿತಿ ನೀಡುವುದು)	ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ವತಿಯಿಂದ ಒಟ್ಟು 2438 ಮೆಟ್ರಿಕ್–ಪೂರ್ವ/ಮೆಟ್ರಿಕ್ ನಂತರ ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿದ್ದು, ಇವುಗಳ ಪೈಕಿ 1345 ವಿದ್ಯಾರ್ಥಿನಿಲಯಗಳು ಸ್ವಂತ ಕಟ್ಟಡಗಳಲ್ಲಿ, 1006 ವಿದ್ಯಾರ್ಥಿನಿಲಯಗಳು ಬಾಡಿಗೆ ಕಟ್ಟಡಗಳಲ್ಲಿ ಹಾಗೂ 87 ವಿದ್ಯಾರ್ಥಿನಿಲಯಗಳು ಉಚಿತ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿವೆ. ಕೋವಿಡ್–19 ಹಿನ್ನೆಲೆಯಲ್ಲಿ ಶಾಲಾ–ಕಾಲೇಜುಗಳು ಮುಚ್ಚಿರುವ ಕಾರಣ, ಸರ್ಕಾರದ ಮಾರ್ಗಸೂಚಿಯನುಸಾರ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಎಲ್ಲಾ ವಿದ್ಯಾರ್ಥಿನಿಲಯಗಳನ್ನು ಮುಚ್ಚಲಾಗಿರುತ್ತದೆ. ಇಂಜಿನಿಯರಿಂಗ್, ಪದವಿ ಇತರೆ ಪರೀಕ್ಷೆಗಳಿಗೆ ಹಾಜರಾಗಲು ನಿಲಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳನ್ನು ಪರೀಕ್ಷೆಯ ಅವಧಿಗೆ ಮಾತ್ರ ಪ್ರಾರಂಭಿಸಲಾಗಿರುತ್ತವೆ.

ಸಂಖ್ಯೆ:ಹಿಂವಕ 540 ಬಿಎಂಎಸ್ 2020

(ಬಿ.ಶ್ರೀರಾಮುಲು)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ,
ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 685
ಸದಸ್ಯರ ಹೆಸರು : ಡಾ: ಅಂಜಲಿ ಹೇಮಂತ್ ನಿಂಬಾಳ್ಕರ್, (ಖಾನಾಪುರ)
ಉತ್ತರಿಸುವ ದಿನಾಂಕ : 24-09-2020
ಉತ್ತರಿಸುವ ಸಚಿವರು : ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಸಚಿವರು

ಕ್ರ.ಸಂ.	ಪ್ರಶ್ನೆಗಳು	ಉತ್ತರಗಳು
ಅ)	ಖಾನಾಪುರ ವಿಧಾನಸಭಾ ಕ್ಷೇತ್ರದ ಅರಣ್ಯ ವ್ಯಾಪ್ತಿಯ ಅರಣ್ಯ ವಿಮೋಚನ ಅಭಿವೃದ್ಧಿ ಕಾಮಗಾರಿಗಳಿಗೆ ಅರಣ್ಯ ಇಲಾಖೆಯ ಅರಣ್ಯ ವಿಮೋಚನಾ ಪತ್ರ ದೊರೆಯಲು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿರುವುದಿಲ್ಲ
ಆ)	ಬೆಳಗಾವಿ-ಗೋವಾ ರಾಷ್ಟ್ರೀಯ ಹೆದ್ದಾರಿ ಅಗಲೀಕರಣ ಕಾಮಗಾರಿಗೆ ಖಾನಪುರ ವಿಧಾನಸಭಾ ಕ್ಷೇತ್ರದಲ್ಲಿ ಎಷ್ಟು ಮರಗಳನ್ನು ಕಡಿಯಲು ಅನುಮತಿ ನೀಡಿದೆ;	ಬೆಳಗಾವಿ-ಗೋವಾ ರಾಷ್ಟ್ರೀಯ ಹೆದ್ದಾರಿ 4ಎ ರ ಅಗಲೀಕರಣಕ್ಕೆ ಅಡಚಣೆಯಾಗಿರುವ ಒಟ್ಟು 16,853 ಮರಗಳ ಕಟಾವಣೆಗೆ ಈಗಾಗಲೇ ಉಪ ಅರಣ್ಯ ಸಂರಕ್ಷಣಾಧಿಕಾರಿ, ಬೆಳಗಾವಿ ವಿಭಾಗ ಇವರ ಕಚೇರಿಯಿಂದ ಅನುಮತಿ ನೀಡಲಾಗಿರುತ್ತದೆ.
ಇ)	ಸದರಿ ಕ್ಷೇತ್ರದಲ್ಲಿ ಶಾಲಾ ಸೇತು ಯೋಜನೆಯಡಿ ಶಾಲ ಮಕ್ಕಳ ಸಂಚಾರಕ್ಕಾಗಿ ಕಾಲುಸಂಕ ನಿರ್ಮಿಸುವ ಕಾಮಗಾರಿಗಳಿಗೆ ಇದುವರೆಗೂ ಅರಣ್ಯ ವಿಮೋಚನ ಪತ್ರ ನೀಡದಿರಲು ಕಾರಣವೇನು;	ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಲೋಕೋಪಯೋಗಿ ಇಲಾಖೆ, ಖಾನಾಪುರ ಉಪವಿಭಾಗ ಇವರು ಖಾನಾಪುರ ತಾಲ್ಲೂಕಿನ ನೇರ್ಸಾ ಗ್ರಾಮದಿಂದ ಕೊಂಗಳ ಮತ್ತು ಗವಳಿ ಗ್ರಾಮಗಳಿಗೆ ಸಂಪರ್ಕ ಕಲ್ಪಿಸುವ ಕಾಲುಸಂಕ ನಿರ್ಮಾಣಕ್ಕಾಗಿ 0.11 ಹೆಕ್ಟೇರ್ ಅರಣ್ಯ ಪ್ರದೇಶವನ್ನು ಉಪಯೋಗಿಸಲು ಅರಣ್ಯ (ಸಂರಕ್ಷಣೆ) ಕಾಯ್ದೆ 1980 ರಡಿ ಅನುಮೋದನೆಯನ್ನು ಕೋರಿ ಆನ್ಲೈನ್ ನಲ್ಲಿ ಪ್ರಸ್ತಾವನೆಯನ್ನು (ಪ್ರಸ್ತಾವನೆ ಸಂಖ್ಯೆ FP/KA/Approach/40060/2019) ಸಲ್ಲಿಸಿದ್ದು, ಸದರಿ ಪ್ರಸ್ತಾವನೆಯು ದಿನಾಂಕ 15-09-2020 ರಂದು ಉಪ ಅರಣ್ಯ ಸಂರಕ್ಷಣಾಧಿಕಾರಿ ಬೆಳಗಾವಿ ವಿಭಾಗ ಇವರಲ್ಲಿ ಸ್ವೀಕೃತವಾಗಿದ್ದು, ಪರಿಶೀಲನಾ ಹಂತದಲ್ಲಿರುತ್ತದೆ.
ಈ)	ಯಾವ ಕಾಲಮಿತಿಯೊಳಗೆ ಈ ಕಾಮಗಾರಿಗಳಿಗೆ ಅರಣ್ಯ ವಿಮೋಚನ ಪತ್ರ ನೀಡಲಾಗುವುದು?	ಅರಣ್ಯ ಸಂರಕ್ಷಣಾ ನಿಯಮ, 2003ರನ್ವಯ (2017ರ ಆಗಸ್ಟ್ ವರೆಗೆ ತಿದ್ದುಪಡಿಯಾದಂತೆ) 40.00 ಹೆಕ್ಟೇರ್ ವರೆಗಿನ ಅರಣ್ಯ ತೀರುವಳಿ ಪ್ರಸ್ತಾವನೆಗಳಿಗೆ ನಿಗಧಿ ಪಡಿಸಿದ ಕಾಲಾವಧಿ ಈ ಕೆಳಗಿನಂತಿರುತ್ತದೆ: ಉಪ ಅರಣ್ಯ ಸಂರಕ್ಷಣಾಧಿಕಾರಿ – 30 ದಿವಸಗಳು ಅರಣ್ಯ ಸಂರಕ್ಷಣಾಧಿಕಾರಿ – 10 ದಿವಸಗಳು ನೋಡಲ್ ಅಧಿಕಾರಿ – 10 ದಿವಸಗಳು ರಾಜ್ಯ ಸರ್ಕಾರ – 30 ದಿವಸಗಳು ಕೇಂದ್ರ ಸರ್ಕಾರ – 25 ದಿವಸಗಳು

ಸಂಖ್ಯೆ: ಅಪಜೀ 66 ಎಫ್‌ಎಲ್‌ಎಲ್ 2020

(ಆನಂದ್ ಸಿಂಗ್)
ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 686
ಸದಸ್ಯರ ಹೆಸರು : ಶ್ರೀಮತಿ ಅಂಜಲಿ ಹೇಮಂತ್ ನಿಂಬಾಳ್ಕರ್ ಡಾ: (ಖಾನಾಪುರ)
ಉತ್ತರಿಸುವ ದಿನಾಂಕ : 24.09.2020
ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ಖಾನಾಪುರ ತಾಲ್ಲೂಕಿನ ಬೀಡಿ ಗ್ರಾಮದಲ್ಲಿ ಸರ್ಕಾರದ ಪ್ರಥಮ ದರ್ಜೆ ಕಾಲೇಜು ಕಟ್ಟಡ ನಿರ್ಮಾಣ ಕಾಮಗಾರಿಯು ವಿಳಂಬ ವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ
ಆ)	ಹಾಗಿದ್ದಲ್ಲಿ ಸದರಿ ಗ್ರಾಮದಲ್ಲಿ ಪ್ರಥಮ ದರ್ಜೆ ಕಾಲೇಜು ಕಟ್ಟಡ ನಿರ್ಮಾಣ ಕಾರ್ಯವು ಯಾವ ಹಂತದಲ್ಲಿದೆ;	ಬೀಡಿ ಗ್ರಾಮದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ 2015-16ನೇ ಸಾಲಿನಲ್ಲಿ ಸ್ವಂತ ಕಟ್ಟಡ ನಿರ್ಮಾಣಕ್ಕಾಗಿ ರೂ.200.00ಲಕ್ಷಗಳ ಅಂದಾಜು ಮೊತ್ತದಲ್ಲಿ ನಿರ್ಮಾಣ ಮಾಡಲು ಲೋಕೋಪಯೋಗಿ ಇಲಾಖೆಗೆ ವಹಿಸಲಾಗಿರುತ್ತದೆ. ಆದರೆ, ಸದರಿ ಕಾಲೇಜಿಗೆ ಮಂಜೂರಾದ ನಿವೇಶನಕ್ಕೆ ಸಂಬಂಧಿಸಿದಂತೆ, ನ್ಯಾಯಾಲಯದಲ್ಲಿ ದಾವೆ ಇದ್ದುದರಿಂದ ಕಾಮಗಾರಿಯನ್ನು ಪ್ರಾರಂಭಿಸಲು ವಿಳಂಭವಾಗಿರುತ್ತದೆ. ಪ್ರಸ್ತುತ ನಿವೇಶನದ ಸಮಸ್ಯೆ ಇತ್ತೀಚಿಗೆ ಬಗೆಹರಿದಿದ್ದು, ದಿನಾಂಕ:05.03.2020ರಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ. ಕಾಮಗಾರಿಯನ್ನು ಪ್ರಾರಂಭಿಸಲಾಗುತ್ತಿದೆ.
ಇ)	ಸದರಿ ಕಾಮಗಾರಿಗೆ ಬಿಡುಗಡೆ ಮಾಡಿರುವ ಹಣವೆಷ್ಟು;	ಸದರಿ ಕಾಮಗಾರಿಗೆ ರೂ.50.00ಲಕ್ಷಗಳ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ.
ಈ)	ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಕಾಮಗಾರಿಯನ್ನು ಶೀಘ್ರವಾಗಿ ಪೂರ್ಣಗೊಳಿಸಲು ಸರ್ಕಾರವು ಇದುವರೆಗೂ ತೆಗೆದುಕೊಂಡಿರುವ ಕ್ರಮಗಳೇನು?	ಮೇಲೆ ವಿವರಿಸಿರುವ ಕಾರಣಗಳಿಂದ ಕಟ್ಟಡ ನಿರ್ಮಾಣ ಕಾಮಗಾರಿ ವಿಳಂಬವಾಗಿದ್ದು, ಶೀಘ್ರದಲ್ಲಿ ಕಾಮಗಾರಿ ಪ್ರಾರಂಭಿಸಲಾಗುತ್ತಿದೆ.

ಸಂಖ್ಯೆ: ಇಡಿ 153 ಹೆಚ್‌ಪಿಸಿ 2020

(ಡಾ: ಅಶ್ವಥ್ ನಾರಾಯಣ ಸಿ.ಎನ್)
ಉಪ ಮುಖ್ಯಮಂತ್ರಿ ಹಾಗೂ
ಉನ್ನತ ಶಿಕ್ಷಣ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	**687**
ಮಾನ್ಯ ಸದಸ್ಯರ ಹೆಸರು	:	**ಶ್ರೀಮತಿ ಅಂಜಲಿ ಹೇಮಂತ್ ನಿಂಬಾಳ್ಕರ್ ಡಾ: (ಖಾನಾಪುರ)**
ಉತ್ತರಿಸಬೇಕಾದ ದಿನಾಂಕ	:	**24-9-2020**
ಉತ್ತರಿಸುವ ಸಚಿವರು	:	**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು**

ಕ್ರ.ಸಂ	ಪ್ರಶ್ನೆ	ಉತ್ತರ
1	ಖಾನಾಪುರ ತಾಲ್ಲೂಕು ಸಾರ್ವಜನಿಕ ಆಸ್ಪತ್ರೆ ಆವರಣದಲ್ಲಿ 60 ಹಾಸಿಗೆಗಳ ತಾಯಿ ಮತ್ತು ಮಕ್ಕಳ ಆಸ್ಪತ್ರೆ ಸ್ಥಾಪನೆಯ ಪ್ರಸ್ತಾವನೆಗೆ ಕೇಂದ್ರ ಸರ್ಕಾರವು ಅನುಮೋದನೆ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
2	ಹಾಗಿದ್ದಲ್ಲಿ, ಯೋಜನೆಯು ಪ್ರಸ್ತುತ ಯಾವ ಹಂತದಲ್ಲಿದೆ;	ಸದರಿ ಕಾಮಗಾರಿಗೆ ರೂ. 1500.00 ಲಕ್ಷಗಳ ಅಂದಾಜು ಮೊತ್ತದಲ್ಲಿ ಆಡಳಿತಾತ್ಮಕ ಅನುಮೋದನೆ ನೀಡುವ ಪ್ರಕ್ರಿಯೆ ಪರಿಶೀಲನೆಯಲ್ಲಿದೆ. ಆಡಳಿತಾತ್ಮಕ ಅನುಮೋದನೆ ದೊರೆತ ನಂತರ ಅನುದಾನ ಬಿಡುಗಡೆಗೆ ಕ್ರಮವಹಿಸಲಾಗುವುದು.
3	ಸದರಿ ಆಸ್ಪತ್ರೆ ಕಟ್ಟಡದ ಕಾಮಗಾರಿಯು ಇದುವರೆಗೂ ಆರಂಭವಾಗದಿರಲು ಕಾರಣಗಳೇನು;	
4	ಸದರಿ ಕಟ್ಟಡದ ಕಾಮಗಾರಿಗಾಗಿ ರಾಜ್ಯ ಸರ್ಕಾರವು ಈವರೆಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು?	

ಆಕುಕ 113 ಎಸ್.ಎಂ.ಎಂ. 2020

(ಬಿ. ಶ್ರೀರಾಮುಲು)

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ

ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	691
ಮಾನ್ಯ ಸದಸ್ಯರ ಹೆಸರು	ಶ್ರೀ ರವಿಸುಬ್ರಹ್ಮಣ್ಯ ಎಲ್ ಎ (ಬಸವನಗುಡಿ)
ಉತ್ತರಿಸಬೇಕಾದ ದಿನಾಂಕ	24.09.2020
ಉತ್ತರಿಸುವ ಸಚಿವರು	ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ಅರಿವು ಯೋಜನೆಯಲ್ಲಿ ಶೇಕಡ 10 ರಷ್ಟು ಮೀಸಲಾತಿಯಲ್ಲಿ ರೂ. ಒಂದು ಲಕ್ಷಕ್ಕಿಂತ ಕಡಿಮೆ ಆದಾಯವಿರುವ ಅರ್ಹತೆ ಆಧಾರದ, ಆರ್ಥಿಕವಾಗಿ ಹಿಂದುಳಿದ ಸಾಮಾನ್ಯ ವರ್ಗದ ವಿದ್ಯಾರ್ಥಿಗಳಿಗೆ ವಿಸ್ತರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;	ಅರಿವು ಶೈಕ್ಷಣಿಕ ಸಾಲ ಯೋಜನೆಯಲ್ಲಿ ಪ್ರವರ್ಗ-1, 2ಎ, 3ಎ ಮತ್ತು 3ಬಿಗೆ ಸೇರಿದ ವಿದ್ಯಾರ್ಥಿಗಳಿಗೆ ಸಾಲ ಸೌಲಭ್ಯ ಒದಗಿಸಲಾಗುತ್ತಿದೆ. ಶೇ.10 ಮೀಸಲಾತಿಯಲ್ಲಿ ಬರುವ ಸಾಮಾನ್ಯ ವರ್ಗದ ವಿದ್ಯಾರ್ಥಿಗಳಿಗೆ ನಿಗಮಗಳಿಂದ ಸಾಲ ಸೌಲಭ್ಯ ಒದಗಿಸುತ್ತಿರುವುದಿಲ್ಲ.
ಆ)	ಇದ್ದಲ್ಲಿ, ಅರಿವು ಸಾಲ ಯೋಜನೆಯನ್ನು 2020-21ನೇ ಸಾಲಿನ ಅರ್ಹ ಆರ್ಥಿಕವಾಗಿ ಹಿಂದುಳಿದ ಸಾಮಾನ್ಯ ವರ್ಗದ ವಿದ್ಯಾರ್ಥಿಗಳಿಗೆ ಜಾರಿಗೆ ತರಲಾಗುವುದೇ?	ಉದ್ಭವಿಸುವುದಿಲ್ಲ.

ಸಂ:ಹಿಂವಕ 530 ಬಿಎಂಎಸ್ 2020

(ಬಿ.ಶ್ರೀರಾಮುಲು)
ಆರೋಗ್ಯ ಮತ್ತು ಕುಟುಂಬ ಕಲ್ಯಾಣಇಲಾಖೆ
ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

ಕರ್ನಾಟಕ ವಿಧಾನ ಸಭೆ

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 922
2. ಮಾನ್ಯ ಸದಸ್ಯರ ಹೆಸರು : ಶ್ರೀಮತಿ ಸೌಮ್ಯ ರೆಡ್ಡಿ (ಜಯನಗರ)
3. ಉತ್ತರಿಸಬೇಕಾದ ದಿನಾಂಕ : 24/09/2020
4. ಉತ್ತರಿಸುವವರು : ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು

ಕ್ರಮ ಸಂಖ್ಯೆ	ಪ್ರಶ್ನೆ	ಉತ್ತರ
ಅ)	ಕೋವಿಡ್ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ಒಟ್ಟು 25 ಲಕ್ಷ ಯುವಕರು ತಮ್ಮ ಕೆಲಸವನ್ನು ಕಳೆದುಕೊಂಡು ನಿರುದ್ಯೋಗಿಗಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿಯೇ;	ವಿವಿಧ ಕಾರ್ಖಾನೆಗಳು ಹಾಗೂ ಉದ್ದಿಮೆಗಳಲ್ಲಿ ತೊಂದರೆಗೊಳಗಾದ ಕಾರ್ಮಿಕರು ಹಾಗೂ ಅವರನ್ನು ಪ್ರತಿನಿಧಿಸುವ ಕಾರ್ಮಿಕ ಸಂಘದವರು ಇಲಾಖೆಗೆ ನೀಡಿದ ದೂರು ಅರ್ಜಿಗಳ ಆಧಾರದ ಮೇಲೆ 8729 ಕಾರ್ಮಿಕರು ಕೆಲಸ ಕಳೆದುಕೊಂಡಿರುವ ಬಗ್ಗೆ ವರದಿಯಾಗಿರುತ್ತದೆ. ಆದರೆ 25 ಲಕ್ಷ ಯುವಕರು ಕೆಲಸ ಕಳೆದುಕೊಂಡು ನಿರುದ್ಯೋಗಿಗಳಾಗಿರುವ ಬಗ್ಗೆ ಯಾವುದೇ ದೂರುಗಳು ಕಾರ್ಮಿಕ ಇಲಾಖೆಯಲ್ಲಿ ಸ್ವೀಕೃತವಾಗಿರುವುದಿಲ್ಲ.
ಆ)	ಹಾಗಿದ್ದಲ್ಲಿ ಸರ್ಕಾರ ಉದ್ಯೋಗ ಸೃಜಿಸಲು ಯಾವ ರೀತಿಯ ನಿಲುವನ್ನು ಕೈಗೊಂಡಿದೆ?	ಮುಂದಿನ ದಿನಗಳಲ್ಲಿ ಪರಿಶೀಲಿಸಲಾಗುವುದು.

ಕಾಇ 314 ಎಲ್ಇಟಿ 2020

(ಅರಬೈಲ್ ಶಿವರಾಂ ಹೆಬ್ಬಾರ್)
ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	924
ಸದಸ್ಯರ ಹೆಸರು	:	ಶ್ರೀ ಕೃಷ್ಣಾರೆಡ್ಡಿ ಎಂ (ಚಿಂತಾಮಣಿ)
ಉತ್ತರಿಸಬೇಕಾದ ದಿನಾಂಕ	:	24.09.2020
ಉತ್ತರಿಸುವ ಸಚಿವರು	:	ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು

ಕ್ರಸ	ಪ್ರಶ್ನೆ	ಉತ್ತರ
ಅ)	ಚಿಂತಾಮಣಿ ತಾಲ್ಲೂಕು ಸಾರ್ವಜನಿಕ ಶಿಕ್ಷಣ ಇಲಾಖೆಯ ಕಛೇರಿ ಕಟ್ಟಡ ನಿರ್ಮಾಣಕ್ಕಾಗಿ ಅನುದಾನ ಬಿಡುಗಡೆಗೆ ಪ್ರಸ್ತಾವನೆ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ
ಆ)	ಬಂದಿದ್ದಲ್ಲಿ, ಕೈಗೊಂಡ ಕ್ರಮಗಳೇನು;(ವಿವರ ನೀಡುವುದು)	ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಗೆ ಕಳೆದ 3-4 ವರ್ಷಗಳಿಂದ ಆಯವ್ಯಯದಲ್ಲಿ ಉಪನಿರ್ದೇಶಕರು ಹಾಗೂ ಕ್ಷೇತ್ರಶಿಕ್ಷಣಾಧಿಕಾರಿಗಳ ಕಛೇರಿ ಕಟ್ಟಡ ನಿರ್ಮಾಣ ಕಾಮಗಾರಿಗಳಿಗೆ ಯಾವುದೇ ಅನುದಾನ ಒದಗಿಸಿರುವುದಿಲ್ಲ. ಆದ್ದರಿಂದ ಉಪನಿರ್ದೇಶಕರು ಹಾಗೂ ಕ್ಷೇತ್ರಶಿಕ್ಷಣಾಧಿಕಾರಿಗಳ ಕಛೇರಿ ಕಟ್ಟಡ ನಿರ್ಮಾಣ ಕಾಮಗಾರಿಗಳನ್ನು ಲೋಕೋಪಯೋಗಿ ಇಲಾಖೆಯ ಮೂಲಕ ನಿರ್ಮಾಣ ಮಾಡಿಕೊಡುವಂತೆ ಪತ್ರ ವ್ಯವಹಾರ ನಡೆಸಲಾಗಿರುತ್ತದೆ.
ಇ)	ಸದರಿ ಕಟ್ಟಡಗಳ ಕಾಮಗಾರಿಗೆ ಯಾವ ಕಾಲಮಿತಿಯೊಳಗೆ ಅನುದಾನ ಬಿಡುಗಡೆ ಮಾಡಿ ಆಡಳಿತಾತ್ಮಕ ಅನುಮೋದನೆ ನೀಡಲಾಗುವುದು? (ವಿವರ ನೀಡುವುದು)	ನಿರ್ಮಾಣ ಕಾಮಗಾರಿಗಳನ್ನು ಅನುದಾನದ ಲಭ್ಯತೆಗೆ ಅನುಗುಣವಾಗಿ ಕ್ರಮವಹಿಸಲಾಗುತ್ತದೆ.

ಇಪಿ 177 ಯೋಸಕ 2020

(ಎಸ್.ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು

ಕರ್ನಾಟಕ ವಿಧಾನಸಭೆ

1)	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	927
2)	ಮಾನ್ಯ ಸದಸ್ಯರ ಹೆಸರು	ಶ್ರೀ ಮುರುಗೇಶ್ ರುದ್ರಪ್ಪ ನಿರಾಣಿ (ಬೀಳಗಿ)
3)	ಉತ್ತರಿಸಬೇಕಾದ ದಿನಾಂಕ	24/09/2020
4)	ಉತ್ತರಿಸುವವರು	ಉಪ ಮುಖ್ಯಮಂತ್ರಿಗಳು ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಸಚಿವರು

****

ಕ್ರ ಸಂ	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಎಸ್.ಸಿ.ವಿ.ಟಿ. ವತಿಯಿಂದ ನಡೆಯುತ್ತಿರುವ ಐ.ಟಿ.ಐ ಕಾಲೇಜುಗಳ ಸಂಖ್ಯೆ ಎಷ್ಟು;	ರಾಜ್ಯದಲ್ಲಿ ಎಸ್.ಸಿ.ವಿ.ಟಿ. ವತಿಯಿಂದ ನಡೆಯುತ್ತಿರುವ ಐ.ಟಿ.ಐ ಕಾಲೇಜುಗಳ ಸಂಖ್ಯೆ- 132
ಆ)	ಎಸ್.ಸಿ.ವಿ.ಟಿ. ವತಿಯಿಂದ ನಡೆಯುತ್ತಿರುವ ಐ.ಟಿ.ಐ ಕಾಲೇಜುಗಳ ವಿದ್ಯಾರ್ಥಿಗಳ ಪರೀಕ್ಷಾ ಫಲಿತಾಂಶವನ್ನು ಕಳೆದ 02 ವರ್ಷಗಳಿಂದ ಪ್ರಕಟಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಸಂಯೋಜನೆ ಪಡೆದು ನಿಯಮಾನುಸಾರ ಪರೀಕ್ಷೆಗೆ ಹಾಜರಾದ ತರಬೇತಿದಾರರ SCVT-2017 & SCVT-2018 ರ ಪರೀಕ್ಷೆಗಳ ಫಲಿತಾಂಶ ಬಿಡುಗಡೆ ಗೊಳಿಸಲಾಗಿರುತ್ತದೆ ಹಾಗೂ ಈ ತರಬೇತಿದಾರರುಗಳ ಅಂಕಪಟ್ಟಿಗಳು ಹಾಗೂ 'ಸಿ' ನಮೂನೆಗಳನ್ನು ಪರೀಕ್ಷಾ ಕೇಂದ್ರಗಳಿಗೆ ವಿತರಣೆ ಮಾಡಲಾಗಿರುತ್ತದೆ. SCVT-2019 ರ ಪರೀಕ್ಷೆಯ ನಿಯತ (REGULAR) ತರಬೇತಿದಾರರ ಫಲಿತಾಂಶ ದಿನಾಂಕ: 07-09-2020 ರಂದು ಪ್ರಕಟಿಸಿದೆ. 2014-15 ನೇ ಸಾಲಿನಿಂದ 2017-18 ನೇ ಸಾಲಿನ ಅನುತ್ತೀರ್ಣ ತರಬೇತಿದಾರರ (REPEATERS) ಫಲಿತಾಂಶವನ್ನು ದಿನಾಂಕ: 16-09-2020 ರಂದು ಪ್ರಕಟಿಸಲಾಗಿದೆ.
ಇ)	ಹಾಗಿದ್ದಲ್ಲಿ, ಫಲಿತಾಂಶ ವಿಳಂಬವಾಗಲು ಕಾರಣಗಳೇನು;	ಅನ್ವಯಿಸುವುದಿಲ್ಲ.
ಈ)	ಪರೀಕ್ಷಾ ಫಲಿತಾಂಶಗಳನ್ನು ಶೀಘ್ರವಾಗಿ ಪ್ರಕಟಿಸಲು ಯಾವ ಕ್ರಮ ಕೈಗೊಳ್ಳಲಾಗುವುದು;	ಅನ್ವಯಿಸುವುದಿಲ್ಲ.
ಉ)	ಫಲಿತಾಂಶ ವಿಳಂಬವಾಗಿರುವುದರಿಂದ ವಿದ್ಯಾರ್ಥಿಗಳ ಭವಿಷ್ಯಕ್ಕೆ ತೊಂದರೆಯಾಗಿರುವುದನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?	ನ್ಯಾಯಾಲಯದ ಪ್ರಕರಣಗಳನ್ನು ಹೊರತುಪಡಿಸಿ ಉಳಿದ ತರಬೇತಿದಾರರ ಫಲಿತಾಂಶ ಪ್ರಕಟಣೆಯಲ್ಲಿ ಯಾವುದೇ ವಿಳಂಬವಾಗಿರುವುದಿಲ್ಲ.

ಸಂಖ್ಯೆ: ಕೌಉಜೀಇ 53 ಕೈತಪ್ರ 2020

(ಡಾ.ಸಿ.ಎನ್.ಅಶ್ವಥ್ ನಾರಾಯಣ)
ಉಪ ಮುಖ್ಯಮಂತ್ರಿಗಳು ಹಾಗೂ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು

ಕರ್ನಾಟಕ ವಿಧಾನ ಸಭೆ

1	ಮಾನ್ಯ ಸದಸ್ಯರ ಹೆಸರು	:	ಶ್ರೀ ಮುರುಗೇಶ್ ರುದ್ರಪ್ಪ ನಿರಾಣಿ (ಬೀಳಗಿ)
2	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	**928**
3	ಉತ್ತರಿಸಬೇಕಾದ ದಿನಾಂಕ	:	**24-09-2020**
4.	ಉತ್ತರಿಸಬೇಕಾದವರು	:	ಕಾರ್ಮಿಕ ಸಚಿವರು

<table>
<tr><th>ಕ್ರ ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ಬಾಗಲಕೋಟೆ ಜಿಲ್ಲೆಯಲ್ಲಿ ಮಂಜೂರಾದ ಇ.ಎಸ್.ಐ. ಆಸ್ಪತ್ರೆಗಳ ಸಂಖ್ಯೆ ಎಷ್ಟು (ತಾಲ್ಲೂಕುವಾರು ವಿಳಾಸದೊಂದಿಗೆ ವಿವರ ನೀಡುವುದು)</td><td>ಬಾಗಲಕೋಟೆ ಜಿಲ್ಲೆಯಲ್ಲಿ ಇ.ಎಸ್.ಐ. ಆಸ್ಪತ್ರೆಗಳು ಇರುವುದಿಲ್ಲ.
ಬಾಗಲಕೋಟೆ ಜಿಲ್ಲೆಯಲ್ಲಿ, 2 ಕಾರಾವಿ. ಚಿಕಿತ್ಸಾಲಯಗಳು ಕಾರ್ಯನಿರ್ವಹಿಸುತ್ತಿದ್ದು, ವಿವರ ಈ ಕೆಳಕಂಡಂತಿದೆ.
<table>
<tr><th>ಕ್ರ. ಸಂ</th><th>ತಾಲ್ಲೂಕು</th><th>ಚಿಕಿತ್ಸಾಲಯ</th><th>ವಿಳಾಸ</th></tr>
<tr><td>1</td><td>ಬಾಗಲಕೋಟೆ</td><td>ಕಾರಾವಿ. ಚಿಕಿತ್ಸಾಲಯ, ಬಾಗಲಕೋಟೆ</td><td>ಕಾರಾವಿ. ಚಿಕಿತ್ಸಾಲಯ, ಬಾಗಲಕೋಟೆ, ಮುಚಖಂಡಿರಸ್ತೆ,</td></tr>
<tr><td>2</td><td>ಜಮಖಂಡಿ</td><td>ಕಾರಾವಿ. ಚಿಕಿತ್ಸಾಲಯ, ಬನಹಟ್ಟಿ</td><td>ತವನಪ್ಪ ಕಲ್ಲಪ್ಪ ರವಲೆ ಬಿಲ್ಡಿಂಗ್, ಉಪ ಖಜಾನೆ ಹಿಂಭಾಗ, ಲಕ್ಷ್ಮೀನಗರ, ಜಗದಾಳೆ ರಸ್ತೆ, ಬನಹಟ್ಟಿ, ತಾಲ್ಲೂಕು, ಬಾಗಲಕೋಟೆ ಜಿಲ್ಲೆ.</td></tr>
</table></td></tr>
<tr><td>(ಆ)</td><td>ಸದರಿ ಇ.ಎಸ್.ಐ. ಆಸ್ಪತ್ರೆಗಳಲ್ಲಿ ವಿವಿಧ ವೃಂದಗಳಲ್ಲಿರುವ ಹುದ್ದೆಗಳ ಸಂಖ್ಯೆ ಎಷ್ಟು; ಅವುಗಳಲ್ಲಿ ಖಾಲಿಯಿರುವ ಹುದ್ದೆಗಳ ಸಂಖ್ಯೆಯೆಷ್ಟು)</td><td>
<table>
<tr><th colspan="5">ಕಾ.ರಾ.ವಿ. ಚಿಕಿತ್ಸಾಲಯ, ಬಾಗಲಕೋಟೆ</th></tr>
<tr><th>ಕ್ರ. ಸಂ.</th><th>ವೃಂದ</th><th>ಮಂಜೂರಾತಿ</th><th>ಕರ್ತವ್ಯ</th><th>ಖಾಲಿ</th></tr>
<tr><td>1</td><td>ಎ</td><td>2</td><td>1</td><td>1</td></tr>
<tr><td>2</td><td>ಸಿ</td><td>5</td><td>3</td><td>2</td></tr>
<tr><td>3</td><td>ಡಿ</td><td>3</td><td>3</td><td>0</td></tr>
<tr><td colspan="2">ಒಟ್ಟು</td><td>10</td><td>7</td><td>3</td></tr>
<tr><th colspan="5">ಕಾರಾವಿ. ಚಿಕಿತ್ಸಾಲಯ, ಬನಹಟ್ಟಿ</th></tr>
<tr><td>1</td><td>ಎ</td><td>3</td><td>2</td><td>1</td></tr>
<tr><td>2</td><td>ಸಿ</td><td>5</td><td>4</td><td>1</td></tr>
<tr><td>3</td><td>ಡಿ</td><td>3</td><td>2</td><td>1</td></tr>
<tr><td colspan="2">ಒಟ್ಟು</td><td>11</td><td>8</td><td>3</td></tr>
</table></td></tr>
<tr><td>(ಇ)</td><td>ಖಾಲಿಯಿರುವ ಹುದ್ದೆಗಳನ್ನು ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಲಾಗುವುದು?</td><td>ಖಾಲಿಯಿರುವ ಎ ಮತ್ತು ಸಿ ವೃಂದದ ಹುದ್ದೆಗಳನ್ನು ಕರ್ನಾಟಕ ಲೋಕಸೇವಾ ಆಯೋಗದ ಮೂಲಕ ಹಾಗೂ ಡಿ ವೃಂದದ ಹುದ್ದೆಗಳನ್ನು ಬಾಹ್ಯ ಗುತ್ತಿಗೆ ಆಧಾರದ ಮೂಲಕ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗಿದೆ.</td></tr>
</table>

LD-LSI/163/2020

(ಅರಬ್ಯೆಲ್ ಶಿವರಾಂ ಹೆಬ್ಬಾರ್)
ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 932

ಸದಸ್ಯರ ಹೆಸರು : ಶ್ರೀ ಅಶ್ವಿನ್ ಕುಮಾರ್ ಎಂ.(ಟಿ.ನರಸೀಪುರ)

ಉತ್ತರಿಸುವ ದಿನಾಂಕ : 24.09.2020

ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
(ಅ)	ಸರ್ಕಾರ ಹೊಸದಾಗಿ ಸರ್ಕಾರಿ ಪಾಲಿಟೆಕ್ನಿಕ್‌ಗಳನ್ನು ಮಂಜೂರು ಮಾಡಲು ಉದ್ದೇಶಿಸಿದೆಯೇ; ಹಾಗಿದ್ದಲ್ಲಿ ಎಷ್ಟು ಪಾಲಿಟೆಕ್ನಿಕ್‌ಗಳನ್ನು ಪ್ರಾರಂಭಿಸಲು ಉದ್ದೇಶಿಸಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)	ಇಲ್ಲ.
(ಆ)	ಮೈಸೂರು ಜಿಲ್ಲೆ ಟಿ.ನರಸೀಪುರ ತಾಲ್ಲೂಕು ಬನ್ನೂರಿನಲ್ಲಿ ನೂತನ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು ಪ್ರಾರಂಭಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ; (ಮಾಹಿತಿ ಒದಗಿಸುವುದು)	ದಿನಾಂಕ **09.08.2017** ರಲ್ಲಿ ಮೈಸೂರು ಜಿಲ್ಲೆಯ ಟಿ.ನರಸೀಪುರದಲ್ಲಿ ಹೊಸ ಸರ್ಕಾರಿ ಪಾಲಿಟೆಕ್ನಿಕ್ ಪ್ರಾರಂಭಿಸಲು ಸರ್ಕಾರವು ಅನುಮೋದಿಸಿದೆ.
(ಇ)	ಹಾಗಿದ್ದಲ್ಲಿ, ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು ಪ್ರಾರಂಭಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?	ಮೈಸೂರು ಜಿಲ್ಲೆಯ ಟಿ.ನರಸೀಪುರದಿಂದ ಬನ್ನೂರು 18.6 ಕಿ.ಮೀ ಅಂತರದಲ್ಲಿರುವ ಟಿ.ನರಸೀಪುರದಲ್ಲಿ ಮೇಲೆ ತಿಳಿಸಿದಂತೆ ಈಗಾಗಲೇ ಹೊಸ ಸರ್ಕಾರಿ ಪಾಲಿಟೆಕ್ನಿಕ್ ಪ್ರಾರಂಭಿಲು ಅನುಮೋದನೆ ನೀಡಲಾಗಿದೆ. ಪ್ರಸ್ತುತ ಇರುವ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜುಗಳಿಗೆ ಅತ್ಯಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಆದ್ಯತೆ ನೀಡುತ್ತಿರುವುದರಿಂದ ಹಾಗೂ ಪ್ರಸಕ್ತ ಸಾಲಿನಲ್ಲಿ ಕೋವಿಡ್-19 ಪ್ರಯುಕ್ತ ಆರ್ಥಿಕ ನಿರ್ಬಂಧ ಜಾರಿಯಲ್ಲಿರುವುದರಿಂದ ಹೊಸ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜನ್ನು ಪ್ರಾರಂಭಿಸಲಾಗುತ್ತಿಲ್ಲ.

ಕಡತ ಸಂಖ್ಯೆ: ಇಡಿ 99 ಹೆಚ್‌ಪಿಟಿ 2020

(ಡಾ: ಅಶ್ವಥ್ ನಾರಾಯಣ ಸಿ.ಎನ್)
ಉಪ ಮುಖ್ಯಮಂತ್ರಿಗಳು ಹಾಗೂ
ಉನ್ನತ ಶಿಕ್ಷಣ ಸಚಿವರು

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	933
ಮಾನ್ಯ ಸದಸ್ಯರ ಹೆಸರು	ಶ್ರೀ ಅಮರೇಗೌಡ ಲಿಂಗನಗೌಡ ಪಾಟೀಲ್ ಬಯ್ಯಾಪುರ್ (ಕುಷ್ಟಗಿ)
ಉತ್ತರಿಸಬೇಕಾದ ದಿನಾಂಕ	24.09.2020
ಉತ್ತರಿಸುವ ಸಚಿವರು	ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ಕುಷ್ಟಗಿ ತಾಲ್ಲೂಕಿನ ಗ್ರಾಮೀಣ ಪ್ರದೇಶಗಳಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ಮೆಟ್ರಿಕ್ ಪೂರ್ವ/ನಂತರದ ವಸತಿ ನಿಲಯಗಳನ್ನು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;	ಕೊಪ್ಪಳ ಜಿಲ್ಲೆ, ಕುಷ್ಟಗಿ ತಾಲ್ಲೂಕಿನಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಪ್ರಸ್ತುತ 10 ಮೆಟ್ರಿಕ್–ಪೂರ್ವ ಮತ್ತು 4 ಮೆಟ್ರಿಕ್–ನಂತರದ ಹೀಗೆ ಒಟ್ಟು 14 ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿರುತ್ತವೆ. ಪ್ರಸ್ತುತ, ಕುಷ್ಟಗಿ ತಾಲ್ಲೂಕಿನಲ್ಲಿ 6 ಮೆಟ್ರಿಕ್ ಪೂರ್ವ ಹಾಗೂ 1 ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ ಮಂಜೂರಾತಿಗೆ ಬೇಡಿಕೆ ಇದ್ದು, ಹೊಸ ವಿದ್ಯಾರ್ಥಿ ನಿಲಯಗಳ ಮಂಜೂರಾತಿಗೆ ಮಾರ್ಗಸೂಚಿಯನ್ವಯ ಪ್ರಸ್ತಾವನೆಗಳು ಜಿಲ್ಲೆಯಿಂದ ಸ್ವೀಕೃತವಾಗಿರುವುದಿಲ್ಲ.
ಆ)	ಯಾವ ಸ್ಥಳಗಳಲ್ಲಿ (ಗ್ರಾಮಗಳಲ್ಲಿ) ಮೆಟ್ರಿಕ್ ಪೂರ್ವ ಮತ್ತು ನಂತರದ ವಸತಿ ನಿಲಯಗಳನ್ನು ಪ್ರಾರಂಭಿಸಲಾಗುವುದು; ಎಷ್ಟು ವಸತಿ ನಿಲಯಗಳನ್ನು ಯಾವಾಗ ಪ್ರಾರಂಭಿಸಲಾಗುವುದು;	ಕುಷ್ಟಗಿ ತಾಲ್ಲೂಕಿನಲ್ಲಿ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರ ವಿದ್ಯಾರ್ಥಿ ನಿಲಯಗಳ ಮಂಜೂರಾತಿಗಾಗಿ ಈ ಕೆಳಕಂಡ ಸ್ಥಳಗಳಲ್ಲಿ ಬೇಡಿಕೆ ಇರುತ್ತದೆ. 1. ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ ಶಿರಗುಂಪಿ 2. ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ ಮೇಣದಾಳ 3. ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ ಸಂಗನಾಳ 4. ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ ಮನ್ನೆರಾಳ 5. ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ ಜುಮಲಾಪೂರ 6. ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ ಲಿಂಗದಹಳ್ಳಿ 7. ಮೆಟ್ರಿಕ್ ನಂತರದ ವೃತ್ತಿಪರ ಬಾಲಕರ ವಿದ್ಯಾರ್ಥಿ ನಿಲಯ ಕುಷ್ಟಗಿ ಆದರೆ ಹೊಸ ವಿದ್ಯಾರ್ಥಿನಿಲಯಗಳ ಮಂಜೂರಾತಿಯು ರಾಜ್ಯದ ಒಟ್ಟಾರೆ ಬೇಡಿಕೆ ಹಾಗೂ ಆಯಾ ಆರ್ಥಿಕ ವರ್ಷದ ಅನುದಾನದ ಲಭ್ಯತೆಯನ್ನು ಆಧರಿಸಿರುತ್ತದೆ.
ಇ)	ವಸತಿ ನಿಲಯಗಳಲ್ಲಿ ವಿದ್ಯಾರ್ಥಿಗಳ ಸಂಖ್ಯಾಬಲವನ್ನು ಹೆಚ್ಚಿಸಲು ಯಾವ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ;	2019–20ನೇ ಸಾಲಿನಲ್ಲಿ ಕುಷ್ಟಗಿ ತಾಲ್ಲೂಕಿನ 3 ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ ಸಂಖ್ಯಾಬಲವನ್ನು 305 ರಿಂದ 335 ಕ್ಕೆ ಹೆಚ್ಚಿಸಲಾಗಿದೆ.
ಈ)	ರಾಜ್ಯದಲ್ಲಿ ಹೊಸದಾಗಿ ಮೆಟ್ರಿಕ್ ಪೂರ್ವ ಅಥವಾ ಮೆಟ್ರಿಕ್ ನಂತರದ ವಸತಿ ನಿಲಯಗಳನ್ನು ಮಂಜೂರು ಮಾಡಲು ಯಾವ ಯಾವ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ.	ರಾಜ್ಯದಲ್ಲಿ ಹೊಸ ವಿದ್ಯಾರ್ಥಿನಿಲಯಗಳ ಮಂಜೂರಾತಿಯು ರಾಜ್ಯದ ಒಟ್ಟಾರೆ ಬೇಡಿಕೆ ಹಾಗೂ ಆಯಾ ಆರ್ಥಿಕ ವರ್ಷದ ಅನುದಾನದ ಲಭ್ಯತೆಯನ್ನು ಆಧರಿಸಿರುತ್ತದೆ.

ಸಂಖ್ಯೆ:ಹಿಂವಕ 531 ಬಿಎಂಎಸ್ 2020

(ಬಿ.ಶ್ರೀರಾಮುಲು)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	935
ಸದಸ್ಯರ ಹೆಸರು	ಶ್ರೀ ಪಾಟೀಲ್ ಹೆಚ್.ಕೆ (ಗದಗ)
ಉತ್ತರಿಸಬೇಕಾದ ದಿನಾಂಕ	24.09.2020
ಉತ್ತರಿಸಬೇಕಾದ ಸಚಿವರು	ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮ ಶೀಲತೆ ಮತ್ತು ಜೀವನೋಪಾಯ ಸಚಿವರು .

	ಪ್ರಶ್ನೆ	**ಉತ್ತರ**
(ಅ)	ಗದಗ-ಬೆಟಗೇರಿಯಲ್ಲಿ ಗದಗ ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರ ಮತ್ತು ತಾರಾಲಯ ಸ್ಥಾಪನೆಗೆ ಹಿಂದಿನ ಸರ್ಕಾರ ಮಂಜೂರಾತಿ ನೀಡಿರುವುದು ಸರ್ಕಾರದ ಗಮನದಲ್ಲಿದೆಯೇ;	ಹೌದು
(ಆ)	ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರ ಮತ್ತು ತಾರಾಲಯ ಸ್ಥಾಪನೆಯ ಕಾರ್ಯಾದೇಶ ನೀಡುವಲ್ಲಿ ಸರ್ಕಾರದ ಈಗಿನ ಕ್ರಮಗಳೇನು (ವಿವರ ಒದಗಿಸುವುದು)	**ತಾರಾಲಯ** ಸ್ಥಾಪನೆಗೆ ಅಗತ್ಯವಿದ್ದ ಪ್ರೊಜೆಕ್ಷನ್ ವ್ಯವಸ್ಥೆ ಅಳವಡಿಸಲು ಗದಗ ಜಿಲ್ಲಾಡಳಿತವು ಟೆಂಡರ್ ಪ್ರಕ್ರಿಯೆ ಕೈಗೊಂಡಿರುತ್ತದೆ. ಕೋವಿಡ್ ಹಿನ್ನೆಲೆಯಲ್ಲಿ ಆಯ್ಕೆಯಾದ ಬಿಡ್ಡುದಾರರಿಗೆ ಕಾರ್ಯದೇಶ ನೀಡುವ ಪೂರ್ವದಲ್ಲಿ ಆರ್ಥಿಕ ಇಲಾಖೆಯ ಸಹಮತಿ ಪಡೆದು, ಗದಗ ತಾರಾಲಯ ಸ್ಥಾಪನೆಗೆ ಸಂಬಂಧಿಸಿದ ಟೆಂಡರ್ ಅನ್ನು ಇತ್ಯರ್ಥಗೊಳಿಸಿ ನಿಯಮಾನುಸಾರ ಆಯ್ಕೆಯಾದ ಅರ್ಹ ಬಿಡ್ಡುದಾರರಿಗೆ ಕಾರ್ಯಾದೇಶ ನೀಡಲು ಸರ್ಕಾರದ ಅನುಮೋದನೆ ನೀಡಲಾಗಿದೆ. ಪ್ರಸ್ತುತ ಕೋವಿಡ್19 ಸಂಕಷ್ಟದಿಂದ ಎದುರಾಗಿರುವ ಅನಿಶ್ಚಿತ ಆರ್ಥಿಕ ಪರಿಸ್ಥಿತಿಯನ್ನು ಪರಿಗಣಿಸಿ ಹಾಗೂ ಆರ್ಥಿಕ ಇಲಾಖೆಯ ಆದೇಶದನ್ವಯ **ಉಪ-ಪ್ರಾದೇಶಿಕ ವಿಜ್ಞಾನ ಕೇಂದ್ರ** ಯೋಜನೆಗಳ ಎಲ್ಲಾ ಕಾರ್ಯಗಳನ್ನು ಮುಂದಿನ ಆದೇಶದವರೆಗೆ ಸ್ಥಗಿತಗೊಳಿಸಲಾಗಿದೆ.

(ಐಟಿಬಿಟಿ 184 ಎಸ್‌ಟಿಎಸ್ 2020)

(ಡಾ।। ಅಶ್ವಥ್ ನಾರಾಯಣ ಸಿ. ಎನ್)
ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ
ಶಿಕ್ಷಣ, ವಿದ್ಯುನ್ಮಾನ, ಮಾಹಿತಿ ತಂತ್ರಜ್ಞಾನ, ಜೈವಿಕ
ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ
ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು.

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1219
ಮಾನ್ಯ ಸದಸ್ಯರ ಹೆಸರು	ಶ್ರೀ ಡಾ|| ಶ್ರೀನಿವಾಸಮೂರ್ತಿ ಕೆ. (ನೆಲಮಂಗಲ)
ಉತ್ತರಿಸಬೇಕಾದ ದಿನಾಂಕ	24.09.2020
ಉತ್ತರಿಸುವ ಸಚಿವರು	ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ ಸಂ.	ಪ್ರಶ್ನೆ	ಉತ್ತರ
ಅ)	ನೆಲಮಂಗಲ ವಿಧಾನಸಭಾ ಕ್ಷೇತ್ರಕ್ಕೆ ಕಳೆದ ಮೂರು ವರ್ಷಗಳಿಂದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿವಿಧ ಯೋಜನೆಗಳಡಿ ಎಷ್ಟು ಅನುದಾನ ಮಂಜೂರು ಮಾಡಲಾಗಿದೆ; (ಸರ್ಕಾರದ ಆದೇಶದ ಪ್ರತಿ ಸಮೇತ ಮಾಹಿತಿ ನೀಡುವುದು)	ನೆಲಮಂಗಲ ವಿಧಾನಸಭಾ ಕ್ಷೇತ್ರಕ್ಕೆ ಕಳೆದ ಮೂರು ವರ್ಷಗಳಿಂದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿವಿಧ ಯೋಜನೆಗಳಡಿ ಮಂಜೂರು ಮಾಡಲಾಗಿರುವ ಅನುದಾನದ ವಿವರಗಳು **www.backwardclasses.kar.nic.in** ನಲ್ಲಿ ಲಭ್ಯವಿರುತ್ತದೆ.
ಆ)	ಕಳೆದ ಮೂರು ವರ್ಷಗಳಿಂದ ಈ ವಿಧಾನಸಭಾ ಕ್ಷೇತ್ರಕ್ಕೆ ಎಷ್ಟು ಹಾಸ್ಟೆಲ್‌ಗಳನ್ನು ಮಂಜೂರು ಮಾಡಲಾಗಿದೆ; ಮಂಜೂರು ಮಾಡಿದ ಅನುದಾನವೆಷ್ಟು; ಮಂಜೂರು ಮಾಡಲಾದ ಹಾಸ್ಟೆಲ್‌ಗಳ ಕಾಮಗಾರಿಯು ಯಾವ ಹಂತದಲ್ಲಿದೆ; (ಸರ್ಕಾರದ ಆದೇಶದ ಪ್ರತಿ ಒದಗಿಸುವುದು)	ಕಳೆದ ಮೂರು ವರ್ಷಗಳಿಂದ ನೆಲಮಂಗಲ ವಿಧಾನಸಭಾ ಕ್ಷೇತ್ರಕ್ಕೆ ಯಾವುದೇ ವಿದ್ಯಾರ್ಥಿನಿಲಯ ಮಂಜೂರಾಗಿರುವುದಿಲ್ಲ. ಆದರೆ, ಈಗಾಗಲೇ ಮಂಜೂರಾಗಿ ಕಾರ್ಯನಿರ್ವಹಿಸುತ್ತಿರುವ 3 ವಿದ್ಯಾರ್ಥಿ ನಿಲಯಗಳ ಕಟ್ಟಡ ನಿರ್ಮಾಣ ಕಾರ್ಯವನ್ನು ಕೈಗೊಂಡಿದ್ದು, ಮಂಜೂರಾದ ಅನುದಾನ ಮತ್ತು ಕಾಮಗಾರಿಯ ಹಂತದ ವಿವರಗಳು **www.backwardclasses.kar.nic.in** ನಲ್ಲಿ ಲಭ್ಯವಿರುತ್ತದೆ.
ಇ)	ಅಲೆಮಾರಿ, ಅರೆಅಲೆಮಾರಿ ಜನಾಂಗದವರು ವಾಸ ಮಾಡುವ ಪ್ರದೇಶಗಳಿಗೆ ಕಳೆದ ಮೂರು ವರ್ಷಗಳಿಂದ ಎಷ್ಟು ಅನುದಾನ ಮಂಜೂರು ಮಾಡಲಾಗಿದೆ; ಮಂಜೂರು ಮಾಡಲಾದ ಅನುದಾನದಲ್ಲಿ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ (ಸರ್ಕಾರದ ಆದೇಶದ ಪ್ರತಿ ಒದಗಿಸುವುದು);	ಅಲೆಮಾರಿ/ಅರೆಅಲೆಮಾರಿ ಜನಾಂಗದವರ ಕಾಲೋನಿಗಳಲ್ಲಿ ಮೂಲಭೂತ ಸೌಕರ್ಯ ಒದಗಿಸಲು ಸಿ.ಸಿ. ರಸ್ತೆ ಮತ್ತು ಚರಂಡಿ ನಿರ್ಮಾಣ ಕಾಮಗಾರಿಗಳಿಗೆ ಈ ಕೆಳಕಂಡಂತೆ ಅನುದಾನವನ್ನು ಮಂಜೂರು ಮಾಡಲಾಗಿದೆ: (see table below) 2018–19 ಮತ್ತು 2019–20ನೇ ಸಾಲಿನಲ್ಲಿ ಮಂಜೂರು ಮಾಡಲಾಗಿರುವ ಅನುದಾನದಲ್ಲಿ ಕಾಮಗಾರಿಗಳ ವಿವರಗಳು **www.backwardclasses.kar.nic.in** ನಲ್ಲಿ ಲಭ್ಯವಿರುತ್ತದೆ.
ಈ)	ಅಲೆಮಾರಿ, ಅರೆಅಲೆಮಾರಿ ಜನಾಂಗಕ್ಕೆ ಸರ್ಕಾರ ಯಾವ ಯಾವ ಯೋಜನೆಗಳನ್ನು ಜಾರಿಗೆ ತರಲಾಗಿದೆ (ಮಾಹಿತಿ ನೀಡುವುದು);	ಅಲೆಮಾರಿ/ಅರೆಅಲೆಮಾರಿ ಜನಾಂಗದವರ ಅಭಿವೃದ್ಧಿಗಾಗಿ ಈ ಕೆಳಕಂಡ ಕಾರ್ಯಕ್ರಮ ಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ: 1. ಮೆಟ್ರಿಕ್ ಪೂರ್ವ ವಿದ್ಯಾರ್ಥಿಗಳಿಗೆ ವಿಶೇಷ ಪ್ರೋತ್ಸಾಹಧನ 2. ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ಅರ್ಹತಾ ವಿದ್ಯಾರ್ಥಿವೇತನ 3. ಆಶ್ರಮ ಶಾಲೆಗಳ ನಿರ್ವಹಣೆ 4. ಅರಿವು ಕಾರ್ಯಕ್ರಮಗಳು 5. ಮೂಲಭೂತ ಸೌಕರ್ಯಗಳು 6. ವಸತಿ ಸೌಲಭ್ಯ 7. ನಿವೇಶನ ಹಂಚಿಕೆಗಾಗಿ ಜಮೀನು ಖರೀದಿ

ಕಾಮಗಾರಿಯ ವಿವರ	ಬಿಡುಗಡೆ ಮಾಡಲಾದ ಅನುದಾನ (ರೂ. ಲಕ್ಷಗಳಲ್ಲಿ)		
	2017–18	2018–19	2019–20
ಸಿ.ಸಿ.ರಸ್ತೆ ಮತ್ತು ಚರಂಡಿ ನಿರ್ಮಾಣ	–	100.00	57.00

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1223
ಮಾನ್ಯ ಸದಸ್ಯರ ಹೆಸರು	ಶ್ರೀ ಪಾಟೀಲ್ ಹೆಚ್.ಕೆ (ಗದಗ)
ಉತ್ತರಿಸಬೇಕಾದ ದಿನಾಂಕ	24-09-2020
ಉತ್ತರಿಸುವ ಸಚಿವರು	ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ	ವಿದೇಶದಿಂದ ಬರುವ ವಿದ್ಯಾರ್ಥಿಗಳಿಗೆ ಕೋವಿಡ್‌ಟೆಸ್ಟ್ ಮಾಡಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು;	ವಿದೇಶದಿಂದ ಬರುವ ವಿದ್ಯಾರ್ಥಿಗಳಿಗೆ ಅಂತರ-ರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿಯೇ ಕೊವಿಡ್ ತಪಾಸಣೆ ಮಾಡಲಾಗುತ್ತಿದ್ದು, ರೋಗ ಲಕ್ಷಣಗಳು ಕಂಡು ಬಂದಲ್ಲಿ, ಆಸ್ಪತ್ರೆಗೆ ದಾಖಲು ಮಾಡಲಾಗುತ್ತಿದೆ ಹಾಗೂ ಫಲಿತಾಂಶದಲ್ಲಿ ಕೋವಿಡ್ ಟೆಸ್ಟ್ ಪಾಸಿಟಿವ್ ಬಂದಲ್ಲಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ನೆಗೆಟಿವ್ ಬಂದಲ್ಲಿ ಹೋಮ್‌ಕ್ವಾರಂಟೈನ್‌ನಲ್ಲಿಇರಿಸಲಾಗುತ್ತಿದೆ.
ಆ	ಕೋವಿಡ್ ಟೆಸ್ಟ್ ನಲ್ಲಿ ಸಕಾರಾತ್ಮಕ ಫಲಿತಾಂಶ ಬಂದರೆ ಅಂತಹ ವಿದ್ಯಾರ್ಥಿಗಳಿಗೆ ರಾಜ್ಯದ ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶ ನಿಷೇಧಿಸಲಾಗುವುದೆ?	ಕೋವಿಡ್ ಟೆಸ್ಟ್ ನಲ್ಲಿ ಸಕಾರಾತ್ಮಕ ಫಲಿತಾಂಶ ಬಂದರೆ ಅಂತಹ ವಿದ್ಯಾರ್ಥಿಗಳಿಗೆ ರಾಜ್ಯದ ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶ ನಿಷೇಧಿಸಲಾಗುವುದಿಲ್ಲ.

ಆಕುಕ 93 ಎಸ್‌ಎಂಎಂ 2020

(ಬಿ. ಶ್ರೀರಾಮುಲು)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1257
ಮಾನ್ಯ ಸದಸ್ಯರ ಹೆಸರು	ಶ್ರೀ ಯತೀಂದ್ರ ಸಿದ್ದರಾಮಯ್ಯ ಡಾ|| (ವರುಣ)
ಉತ್ತರಿಸಬೇಕಾದ ದಿನಾಂಕ	24.09.2020
ಉತ್ತರಿಸುವ ಸಚಿವರು	ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಬರುವ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮವನ್ನು ಹೊರತುಪಡಿಸಿ ಉಳಿದ ಎಲ್ಲಾ ನಿಗಮಗಳ ಫಲಾನುಭವಿಗಳ ಆಯ್ಕೆಯನ್ನು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮಾಡುತ್ತಿರುವುದು ನಿಜವೇ:	ಹೌದು
ಆ)	ಹಾಗಿದ್ದಲ್ಲಿ, ಎಲ್ಲಾ ನಿಗಮಗಳ ಫಲಾನುಭವಿಗಳ ಆಯ್ಕೆ ಮಾಡುವ ಅಧಿಕಾರವನ್ನು ಮಾನ್ಯ ಶಾಸಕರುಗಳಿಗೆ ನೀಡುವ ಬಗ್ಗೆ ಸರ್ಕಾರದ ನಿಲುವೇನು? (ವಿವರ ನೀಡುವುದು)	ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮ, ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮ, ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮ, ಕರ್ನಾಟಕ ಸವಿತಾ ಸಮಾಜ ಅಭಿವೃದ್ಧಿ ನಿಗಮ, ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ, ಆರ್ಯ ವೈಶ್ಯ ಸಮುದಾಯ ಅಭಿವೃದ್ಧಿ ನಿಗಮ ಹಾಗೂ ಅಲೆಮಾರಿ ಹಾಗೂ ಅರೆ ಅಲೆಮಾರಿ ಅಭಿವೃದ್ಧಿ ನಿಗಮಗಳ ವ್ಯಾಪ್ತಿಗೆ ಬರುವ ಸಮುದಾಯಗಳು ರಾಜ್ಯದ ಎಲ್ಲಾ ವಿಧಾನಸಭಾ ಕ್ಷೇತ್ರಗಳಲ್ಲಿ ಲಭ್ಯರಿರುವುದಿಲ್ಲ. ಸದರಿ ನಿಗಮಗಳಿಗೆ ಆಯವ್ಯಯದಲ್ಲಿ ಕಡಿಮೆ ಅನುದಾನ ನಿಗಧಿಪಡಿಸುತ್ತಿರುವ ಹಿನ್ನೆಲೆಯಲ್ಲಿ ಫಲಾನುಭವಿಗಳನ್ನು ಆಯಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣ ಅಧಿಕಾರಿಗಳ ಅಧ್ಯಕ್ಷತೆಯಲ್ಲಿನ ಜಿಲ್ಲಾ ಆಯ್ಕೆ ಸಮಿತಿ ಮೂಲಕ ಆಯ್ಕೆ ಮಾಡಲಾಗುತ್ತದೆ.

ಸಂ:ಹಿಂವಕ 528 ಬಿಎಂಎಸ್ 2020

(ಬಿ.ಶ್ರೀರಾಮುಲು)
ಆರೋಗ್ಯ ಮತ್ತು ಕುಟುಂಬ ಕಲ್ಯಾಣಇಲಾಖೆ
ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1263
ಮಾನ್ಯ ಸದಸ್ಯರ ಹೆಸರು	ಶ್ರೀ ಸುರೇಶ್‌ಗೌಡ (ನಾಗಮಂಗಲ)
ಉತ್ತರಿಸಬೇಕಾದ ದಿನಾಂಕ	24.09.2020
ಉತ್ತರಿಸುವ ಸಚಿವರು	ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ನೀಡುವ ಸಾಲ-ಸೌಲಭ್ಯಗಳ ಫಲಾನುಭವಿಗಳ ಆಯ್ಕೆಯನ್ನು ಸಿ.ಇ.ಓ ಮಾಡುವುದರಿಂದ ಅರ್ಹ ಮತ್ತು ನೈಜ ಫಲಾನುಭವಿಗಳನ್ನು ಗುರುತಿಸಲು ಸಾಧ್ಯವಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿರುವುದಿಲ್ಲ. ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಸ್ವಯಂ ಉದ್ಯೋಗ ನೇರ ಸಾಲ ಯೋಜನೆ, ಸಾಂಪ್ರದಾಯಿಕ ವೃತ್ತಿದಾರರ ಸಾಲ ಯೋಜನೆ, ಕಿರು ಸಾಲ ಯೋಜನೆ ಮತ್ತು ಗಂಗಾ ಕಲ್ಯಾಣ ನೀರಾವರಿ ಯೋಜನೆಗಳಲ್ಲಿ ಅಯಾ ವಿಧಾನಸಭಾ ಕ್ಷೇತ್ರದ ಮಾನ್ಯ ಶಾಸಕರ ಅಧ್ಯಕ್ಷತೆಯಲ್ಲಿನ ಆಯ್ಕೆ ಸಮಿತಿ ಮುಖಾಂತರವೇ ಅರ್ಹ ಮತ್ತು ನೈಜ ಫಲಾನುಭವಿಗಳನ್ನು ಗುರುತಿಸಲಾಗುತ್ತಿದೆ ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮ, ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮ, ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ, ಮಡಿವಾಳ ಅಭಿವೃದ್ಧಿ ನಿಗಮ, ಕರ್ನಾಟಕ ಆರ್ಯ ವೈಶ್ಯ ಅಭಿವೃದ್ಧಿ ನಿಗಮ ಮತ್ತು ಅಲೆಮಾರಿ/ಅರೆ ಅಲೆಮಾರಿ ಅಭಿವೃದ್ಧಿ ನಿಗಮಗಳಿಗೆ ಆಯವ್ಯಯದಲ್ಲಿ ಕಡಿಮೆ ಅನುದಾನ ಒದಗಿಸುವ ಹಿನ್ನಲೆಯಲ್ಲಿ ಸದರಿ ನಿಗಮಗಳ ಫಲಾನುಭವಿಗಳು ಎಲ್ಲಾ ಜಿಲ್ಲೆಗಳಲ್ಲಿ ಲಭ್ಯವಿಲ್ಲದೆ ಇರುವ ಹಿನ್ನೆಲೆಯಲ್ಲಿ ಸದರಿ ನಿಗಮಗಳ ಫಲಾನುಭವಿಗಳ ಆಯ್ಕೆ ಪ್ರಕ್ರಿಯೆಯನ್ನು ಆಯಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಅಧ್ಯಕ್ಷತೆಯಲ್ಲಿನ ಜಿಲ್ಲಾ ಆಯ್ಕೆ ಸಮಿತಿ ಮೂಲಕ ಆಯ್ಕೆ ಮಾಡಲಾಗುತ್ತದೆ.
ಆ)	ಬಂದಿದ್ದಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡುವ ಪ್ರಕ್ರಿಯೆಯನ್ನು ಶಾಸಕರು ಅಧ್ಯಕ್ಷತೆಯಲ್ಲಿ ನಡೆಯುವಂತೆ ನಿಯಮದಲ್ಲಿ ಅವಕಾಶ ಕಲ್ಪಿಸಲಾಗುವುದುದೇ?	ಉದ್ಭವಿಸುವುದಿಲ್ಲ.

ಸಂ:ಹಿಂವಕ 527 ಬಿಎಂಎಸ್ 2020

(ಬಿ.ಶ್ರೀರಾಮುಲು)
ಆರೋಗ್ಯ ಮತ್ತು ಕುಟುಂಬ ಕಲ್ಯಾಣಇಲಾಖೆ
ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1268
ಮಾನ್ಯ ಸದಸ್ಯರ ಹೆಸರು : ಶ್ರೀ ಶ್ರೀನಿವಾಸ್ ಎಂ. (ಮಂಡ್ಯ)
ಉತ್ತರಿಸಬೇಕಾದ ದಿನಾಂಕ : 24-9-2020
ಉತ್ತರಿಸುವ ಸಚಿವರು : ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
1	ಮಂಡ್ಯ ವಿಧಾನಸಭಾ ಕ್ಷೇತ್ರದ ಕಸಬಾ ಹೋಬಳಿ ಕೇಂದ್ರದಲ್ಲಿನ ಕೆರೆ ಗ್ರಾಮದಲ್ಲಿ ಸಮುದಾಯ ಆಸ್ಪತ್ರೆ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮವೇನು;	ಮಂಡ್ಯ ಜಿಲ್ಲೆಯಲ್ಲಿ ಜನಸಂಖ್ಯೆಗನುಗುಣವಾಗಿ 02 ಸಮುದಾಯ ಆರೋಗ್ಯ ಕೇಂದ್ರಗಳಿಗೆ ಅವಕಾಶವಿದ್ದು, ಅದರಂತೆ, 02 ಸಮುದಾಯ ಆರೋಗ್ಯ ಕೇಂದ್ರಗಳು ಈಗಾಗಲೇ ಕಾರ್ಯ ನಿರ್ವಹಿಸುತ್ತಿವೆ. ಆದ್ದರಿಂದ ಮಂಡ್ಯ ಜಿಲ್ಲೆ ಕಸಬಾ ಹೋಬಳಿ ಕೇಂದ್ರದಲ್ಲಿನ ಹನಕೆರೆ ಗ್ರಾಮದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆಯನ್ನು ತಡೆಹಿಡಿಯಲಾಗಿದೆ.
2	ಸದರಿ ಮತಕ್ಷೇತ್ರಕ್ಕೆ ಯಾವ ಕಾಲಮಿತಿಯಲ್ಲಿ ಸಮುದಾಯ ಆಸ್ಪತ್ರೆ ಮಂಜೂರಾತಿ ನೀಡಲಾಗುವುದು;	
3	ಮಂಡ್ಯ ತಾಲ್ಲೂಕಿನಲ್ಲಿರುವ ಸಮುದಾಯ ಆಸ್ಪತ್ರೆಗಳೆಷ್ಟು? (ಸಂಪೂರ್ಣ ಮಾಹಿತಿ ನೀಡುವುದು)	ಜನಸಂಖ್ಯೆಗೆ ಅನುಗುಣವಾಗಿ ಮಂಡ್ಯ ತಾಲ್ಲೂಕಿನಲ್ಲಿ ಈ ಕೆಳಕಂಡ 02 ಸಮುದಾಯ ಆರೋಗ್ಯ ಕೇಂದ್ರಗಳಿವೆ: 1.ಕೀಲಾರ, ಸಮುದಾಯ ಆರೋಗ್ಯ ಕೇಂದ್ರ 2. ಶಿವಳ್ಳಿ, ಸಮುದಾಯ ಆರೋಗ್ಯ ಕೇಂದ್ರ.

ಆಕುಕ 109 ಎಸ್.ಎಂ.ಎಂ. 2020

(ಬಿ. ಶ್ರೀರಾಮುಲು)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1272
ಸದಸ್ಯರ ಹೆಸರು	ಶ್ರೀ ಸುರೇಶ್ ಗೌಡ (ನಾಗಮಂಗಲ),
ಉತ್ತರಿಸಬೇಕಾದ ದಿನಾಂಕ	24.09.2020
ಉತ್ತರಿಸಬೇಕಾದ ಸಚಿವರು	ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ)
ಪ್ರಶ್ನೆ	ಉತ್ತರ
(ಅ) ಪ್ರಾಂಶುಪಾಲರ ಹುದ್ದೆಗೆ ಯು.ಜಿ.ಸಿ. ನಿಗಧಿಪಡಿಸಿರುವ 15 ವರ್ಷಗಳ ಬೋಧನಾ ಅನುಭವ ಮತ್ತು ಪಿ.ಹೆಚ್.ಡಿ. ಅರ್ಹತೆಯುಳ್ಳ ಅಭ್ಯರ್ಥಿಗಳು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಇದ್ದಾಗ್ಯೂ ಇವರನ್ನೇ ಅನ್ಯ ಕಾರ್ಯನಿಮಿತ್ತ ಪ್ರಭಾರಿ ಪ್ರಾಂಶುಪಾಲರನ್ನಾಗಿ ನೇಮಕ ಮಾಡಲು ಸರ್ಕಾರಕ್ಕೆ ಇರುವ ತೊಡಕುಗಳೇನು; (ಸಂಪೂರ್ಣ ಮಾಹಿತಿ ನೀಡುವುದು)	ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಪ್ರಾಂಶುಪಾಲರ ಹುದ್ದೆಗಳನ್ನು ಯು.ಜಿ.ಸಿ. ಮಾರ್ಗಸೂಚಿಗಳನ್ವಯ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅವಕಾಶ ಕಲ್ಪಿಸಲಾಗಿದೆ. ದಿನಾಂಕ: 15.09.2017 ಹಾಗೂ 27.09.2017ರಂದು ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಕಾಲೇಜು ಶಿಕ್ಷಣ ಇಲಾಖೆಯಲ್ಲಿ ಖಾಲಿ ಇರುವ ಪ್ರಾಂಶುಪಾಲರ ಹುದ್ದೆಗಳನ್ನು ಯು.ಜಿ.ಸಿ. ನಿಯಮಗಳ ಪ್ರಕಾರ ನೇರ ನೇಮಕಾತಿ ಮೂಲಕ ನೇಮಕ ಮಾಡುವ ಬಗ್ಗೆ ತೀರ್ಮಾನಿಸಿದಂತೆ, ಮಂಜೂರಾಗಿರುವ 310 ಪ್ರಾಂಶುಪಾಲರ ಹುದ್ದೆಗಳನ್ನು ಯು.ಜಿ.ಸಿ ಮಾರ್ಗಸೂಚಿಗಳು/ ಮಾನದಂಡಗಳನ್ವಯ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ/121/ಡಿಸಿಇ/2018, ದಿನಾಂಕ:09.09.2020 ರಲ್ಲಿ ವಿಶೇಷ ನೇಮಕಾತಿ ನಿಯಮಗಳನ್ನು ರೂಪಿಸಿ ಅಂತಿಮ ನಿಯಮಗಳನ್ನು ಹೊರಡಿಸಲಾಗಿದೆ. ಸದರಿ ನಿಯಮಗಳಲ್ಲಿ ಪ್ರಾಂಶುಪಾಲರ ಹುದ್ದೆಗೆ ಯು.ಜಿ.ಸಿ. ಮಾನದಂಡಗಳಂತೆ 15 ವರ್ಷಗಳ ಬೋಧನಾ ಅನುಭವ ಮತ್ತು ಪಿ.ಹೆಚ್.ಡಿ. ಅರ್ಹತೆಯನ್ನು ನಿಗಧಿಪಡಿಸಲಾಗಿದೆ. ಪ್ರಸ್ತುತ ಕೋವಿಡ್-19 ಹಿನ್ನೆಲೆಯಲ್ಲಿ 2020-21ನೇ ಸಾಲಿನಲ್ಲಿ ಯಾವುದೇ ನೇರ ನೇಮಕಾತಿಯನ್ನು ಕೈಗೊಳ್ಳುವಂತಿಲ್ಲ ಎಂಬುದಾಗಿ ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ:ಆಇ/03/ಬಿಇಎಂ/2020, ದಿನಾಂಕ: 06.07.2020 ರಲ್ಲಿ ನಿರ್ಬಂಧಿಸಲಾಗಿದೆ. ಆದಾಗ್ಯೂ, ಪ್ರಾಂಶುಪಾಲರು ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ನೇಮಕಾತಿ ಪ್ರಕ್ರಿಯೆಯನ್ನು ಕೈಗೊಳ್ಳಲು ಅನುಮತಿ ನೀಡುವಂತೆ ಆರ್ಥಿಕ ಇಲಾಖೆಯನ್ನು ಕೋರಲಾಗಿದೆ.
(ಆ) ರಾಜ್ಯದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಹಲವಾರು ವರ್ಷಗಳಿಂದ ಸಹಾಯಕ ಪ್ರಾಧ್ಯಾಪಕರಾಗಿ, ಸಹ ಪ್ರಾಧ್ಯಾಪಕರಾಗಿ ಕಾರ್ಯನಿರ್ವಹಿಸುತ್ತಿರುವ ಯು.ಜಿ.ಸಿ. ಅರ್ಹತೆಯುಳ್ಳ ಉಪನ್ಯಾಸಕರಿಗೆ ಪ್ರಾಧ್ಯಾಪಕರಾಗಿ ಬಡ್ತಿ ನೀಡಲು ಸರ್ಕಾರಕ್ಕಿರುವ ಅಡಚಣೆಗಳೇನು; ಹಾಗೂ ಯಾವ ಕಾಲಮಿತಿಯೊಳಗೆ ಬಡ್ತಿ ನೀಡಲಾಗುವುದು/ (ಸಂಪೂರ್ಣ ಮಾಹಿತಿ ನೀಡುವುದು)	2016ರ ಯು.ಜಿ.ಸಿ. ಹಾಗೂ 2018ರ ಯು.ಜಿ.ಸಿ. ನಿಯಮಗಳನ್ವಯ ಪ್ರಾಧ್ಯಾಪಕರ ಹುದ್ದೆಗೆ ಪದೋನ್ನತಿ ನೀಡುವ ಬಗ್ಗೆ ಮಾರ್ಗಸೂಚಿಗಳನ್ನು ಹಾಗೂ ಆಯ್ಕೆ ಸಮಿತಿಯನ್ನು ರಚಿಸಲು ಸಂಬಂಧ ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿರುತ್ತದೆ.

ಇಡಿ 166 ಡಿಸಿಇ 2020

(ಡಾ. ಅಶ್ವಥ್ ನಾರಾಯಣ ಸಿ.ಎನ್.)
ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ)

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1275
ಮಾನ್ಯ ಸದಸ್ಯರ ಹೆಸರು	:	ಶ್ರೀ.ಮಹೇಶ್ ಎನ್ (ಕೊಳ್ಳೇಗಾಲ)
ಉತ್ತರಿಸಬೇಕಾದ ದಿನಾಂಕ	:	24-09-2020
ಉತ್ತರಿಸುವ ಸಚಿವರು	:	ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ	ಕರ್ನಾಟಕ ರಾಜ್ಯದಲ್ಲಿ ಕೋವಿಡ್-19 ಸೋಂಕಿತರಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಹಾಗೂ ಅಲೆಮಾರಿಗಳ ಸೋಂಕಿತರ ಸಂಖ್ಯೆ ಎಷ್ಟು (ಜಿಲ್ಲಾವಾರು ಮಾಹಿತಿ ನೀಡುವುದು):	ಕರ್ನಾಟಕ ರಾಜ್ಯದಲ್ಲಿ ಕೋವಿಡ್-19 ಸೋಂಕಿತರನ್ನು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಹಾಗೂ ಅಲೆಮಾರಿಗಳನ್ನು ಪ್ರತ್ಯೇಕವಾಗಿ ದಾಖಲಿಸಲಾಗುತ್ತಿಲ್ಲ.
ಆ	ಕೋವಿಡ್-19 ಸೋಂಕು ತಪಾಸಣೆ ಮತ್ತು ಚಿಕಿತ್ಸೆಗೆ ಸಂಬಂಧಿಸಿದಂತೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಹಾಗೂ ಅಲೆಮಾರಿಗಳ ಸೋಂಕಿತರ ವೆಚ್ಚವನ್ನು ಭರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು:	ರಾಜ್ಯದ ಎಲ್ಲಾ ವರ್ಗದ ಕೋವಿಡ್-19 ಸೋಂಕಿತರನ್ನು ಸರ್ಕಾರಿ ಆಸ್ಪತ್ರೆಯಲ್ಲಿ ಹಾಗು ಖಾಸಗಿ ಆಸ್ಪತ್ರೆಯಲ್ಲಿ ಸರ್ಕಾರಿ ಕೋಟಾದಲ್ಲಿ ರೆಫರಲ್ ಆಧಾರದ ಮೇಲೆ ಕಳುಹಿಸುವ ರೋಗಿಗಳಿಗೆ ಉಚಿತ ಚಿಕಿತ್ಸೆ ನೀಡುತ್ತಿದ್ದು, ಇದನ್ನು ಪ್ರತ್ಯೇಕಗೊಳಿಸಲಾಗಿರುವುದಿಲ್ಲ.
ಇ	ಖಾಸಗಿ ಆಸ್ಪತ್ರೆಗಳಿಗೆ ದಾಖಲಾದ ಬಡ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಹಾಗೂ ಅಲೆಮಾರಿಗಳ ಚಿಕಿತ್ಸಾ ವೆಚ್ಚವನ್ನು ಸರ್ಕಾರದಿಂದ ಭರಿಸಲಾಗುತ್ತಿದೆಯೇ:	ಖಾಸಗಿ ಆಸ್ಪತ್ರೆಯಲ್ಲಿ ಸರ್ಕಾರಿ ಕೋಟಾದಲ್ಲಿ ಚಿಕಿತ್ಸೆ ಪಡೆಯುತ್ತಿರುವ ಎಲ್ಲಾ ಸೋಂಕಿತರ ಚಿಕಿತ್ಸಾ ವೆಚ್ಚವನ್ನು ಆಸ್ಪತ್ರೆಗೆ ಮರುಪಾವತಿ ಮಾಡಲಾಗುತ್ತಿದೆ.
ಈ	ಸರ್ಕಾರದಿಂದ ಭರಿಸದಿದ್ದಲ್ಲಿ, ಮರುಪಾವತಿ ಮಾಡಲು ಕ್ರಮ ಕೈಗೊಳ್ಳುಲಾಗುವುದೇ?	

ಆಕುಕ 100 ಎಸ್‌ಎಂಎಂ 2020

(ಬಿ.ಶ್ರೀರಾಮುಲು)

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾ

ಹಿಂದುಳಿದ ವರ್ಗಗಳ ಕಲ್ಯಾಣ ಸಚಿ

ಕರ್ನಾಟಕ ವಿಧಾನ ಸಭೆ

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1280
2. ಮಾನ್ಯ ಸದಸ್ಯರ ಹೆಸರು : ಶ್ರೀ ರಾಜೇಶ್ ನಾಯಕ್ ಯು. (ಬಂಟ್ವಾಳ)
3. ಉತ್ತರಿಸಬೇಕಾದ ದಿನಾಂಕ : 24/09/2020
4. ಉತ್ತರಿಸುವವರು : ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳ ತಾಲ್ಲೂಕಿನಲ್ಲಿ ಕೋವಿಡ್-19 ಸಂಬಂಧವಾಗಿ ಕಾರ್ಮಿಕ ಇಲಾಖೆಯಿಂದ ಪರಿಹಾರ ಧನವನ್ನು ಕೋರಿ ಅರ್ಜಿ ಸಲ್ಲಿಸಿದ ಕಟ್ಟಡ ಕಾರ್ಮಿಕರ ಸಂಖ್ಯೆ ಎಷ್ಟು; ಸರ್ಕಾರ ಪ್ರತಿ ಕಾರ್ಮಿಕರಿಗೆ ಘೋಷಿಸಿರುವ ಪರಿಹಾರ ಧನ ಎಷ್ಟು;	ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ಕೋವಿಡ್-19 ಹಿನ್ನಲೆಯಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳ ತಾಲ್ಲೂಕಿನಲಿ 6,015 ನೋಂದಾಯಿತ ಕಟ್ಟಡ ಕಾರ್ಮಿಕರು ಪರಿಹಾರ ಧನವನ್ನು ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಸರ್ಕಾರವು ಪ್ರತಿ ಕಾರ್ಮಿಕರಿಗೆ ತಲಾ ರೂ.5,000/- ಗಳ ಪರಿಹಾರ ಧನವನ್ನು ಘೋಷಿಸಿರುತ್ತದೆ.
ಆ)	ಅರ್ಜಿ ಸಲ್ಲಿಸಿದ ಕಾರ್ಮಿಕರ ಪೈಕಿ ಎಷ್ಟು ಕಾರ್ಮಿಕರಿಗೆ ಈವರೆಗೆ ಪರಿಹಾರಧನವನ್ನು ಪಾವತಿ ಮಾಡಲಾಗಿದೆ; ಪಾವತಿ ಮಾಡಲಾದ ಮೊತ್ತದ ವಿವರ ನೀಡುವುದು;	ಅರ್ಜಿ ಸಲ್ಲಿಸಿದ ನೋಂದಾಯಿತ 6,015 ಕಾರ್ಮಿಕರ ಪೈಕಿ 6,015 ಕಾರ್ಮಿಕರಿಗೆ ರೂ.3,00,75,000/- ಮೊತ್ತದ ಪರಿಹಾರಧನವನ್ನು ಪಾವತಿ ಮಾಡಲಾಗಿದೆ.
ಇ)	ಪಾವತಿ ಮಾಡಲು ಬಾಕಿ ಇದ್ದಲ್ಲಿ ಬಾಕಿ ಇರುವ ಕಾರ್ಮಿಕರ ಸಂಖ್ಯೆ ಮತ್ತು ಪಾವತಿಸಲು ಬಾಕಿ ಇರುವ ಮೊತ್ತ ಎಷ್ಟು	ಸಹಾಯಧನ ಕೋರಿ ಅರ್ಜಿ ಸಲ್ಲಿಸಿದ ಎಲ್ಲಾ ಫಲಾನುಭವಿಗಳಿಗೆ ಪರಿಹಾರಧನವನ್ನು ಬಿಡುಗಡೆ ಮಾಡಲಾಗಿರುತ್ತದೆ. ಪರಿಹಾರಧನ ಪಾವತಿಸಲು ಯಾವುದೇ ಅರ್ಜಿಯು ಬಾಕಿ ಇರುವುದಿಲ್ಲ.
ಈ)	ಬಾಕಿ ಇರುವ ಸಹಾಯಧನವನ್ನು ಯಾವಾಗ ಸರ್ಕಾರದಿಂದ ಪಾವತಿಸಲಾಗುವುದು? (ಮಾಹಿತಿ ನೀಡುವುದು)	ಸಹಾಯಧನ ಪಾವತಿಗೆ ಯಾವುದೇ ಅರ್ಜಿಗಳು ಬಾಕಿ ಇರುವುದಿಲ್ಲ.

ಕಾಇ 315 ಎಲ್‌ಇಟಿ 2020

(ಅರಬೈಲ್ ಶಿವರಾಂ ಹೆಬ್ಬಾರ್)
ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು

ಕರ್ನಾಟಕ ವಿಧಾನಸಭೆ

1)	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1289
2)	ಮಾನ್ಯ ಸದಸ್ಯರ ಹೆಸರು	ಶ್ರೀ ಭೀಮಾನಾಯ್ಕ.ಎಸ್. (ಹಗರಿಬೊಮ್ಮನಹಳ್ಳಿ)
3)	ಉತ್ತರಿಸಬೇಕಾದ ದಿನಾಂಕ	24/09/2020
4)	ಉತ್ತರಿಸುವವರು	ಉಪ ಮುಖ್ಯಮಂತ್ರಿಗಳು ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಸಚಿವರು

****

ಕ್ರ ಸಂ	ಪ್ರಶ್ನೆ	ಉತ್ತರ
ಅ)	ಕಲ್ಯಾಣ ಕರ್ನಾಟಕದ ಕೌಶಲ್ಯ ಅಭಿವೃದ್ಧಿ ಇಲಾಖೆಯಲ್ಲಿ ತರಬೇತಿ ಅಧಿಕಾರಿಗಳು ಸುಮಾರು 12 ವರ್ಷಗಳಿಂದ ಗುಣಾತ್ಮಕ ತರಬೇತಿ ಹಾಗೂ ಕೌಶಲ್ಯಾಯುಕ್ತ ಯೋಜನೆಗಳನ್ನು ಅನುಷ್ಠಾನಗೊಳಿಸಿದ್ದು, ಅಂತಹ ಅಧಿಕಾರಿಗಳು/ನೌಕರರಿಗೆ ಇಲ್ಲಿಯವರೆಗೆ ಪದೋನ್ನತಿ ನೀಡದಿರುವುದು ಸರ್ಕಾರದ ಗಮನಕ್ಕಿದೆಯೇ;	ಹೌದು.
ಆ)	ಈ ಇಲಾಖೆಯಲ್ಲಿ 2006-07 ರಲ್ಲಿ ತರಬೇತಿ ಅಧಿಕಾರಿಗಳಾಗಿ ಪದೋನ್ನತಿ ಪಡೆದು ಕಲ್ಯಾಣ ಕರ್ನಾಟಕದ 33 ಸರ್ಕಾರಿ ಐಟಿಐ ಗಳಲ್ಲಿ ಪ್ರಾಚಾರ್ಯರ ಹುದ್ದೆಯಲ್ಲಿ ಕಳೆದ 6 ವರ್ಷಗಳಿಂದ ಕಾರ್ಯ ನಿರ್ವಹಿಸುತ್ತಿದ್ದು 12-13 ವರ್ಷಗಳಾದರೂ ಇವರಿಗೆ ಪದೋನ್ನತಿ ದೊರೆಯದಿರಲು ಕಾರಣವೇನು;	ಶ್ರೀ. ಬಿ.ಕೆ.ಪವಿತ್ರ ಪ್ರಕರಣದ ಕಾರಣದಿಂದಾಗಿ ಎಲ್ಲಾ ವೃಂದಗಳಿಗೆ ಮುಂಬಡ್ತಿಯನ್ನು ನೀಡುವುದು ವಿಳಂಬವಾಗಿದ್ದು, ಪ್ರಸ್ತುತ ಮುಂಬಡ್ತಿ ನೀಡುವ ಪ್ರಕ್ರಿಯೆ ಚಾಲ್ತಿಯಲ್ಲಿದ್ದು, ಸದ್ಯದಲ್ಲೇ ಸದರಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗುವುದು.
ಇ)	ಕಲ್ಯಾಣ ಕರ್ನಾಟಕದ 33 ಸರ್ಕಾರಿ ಐಟಿಐ ಗಳಲ್ಲಿ 6 ವರ್ಷಗಳಿಂದ ಪ್ರಾಚಾರ್ಯರು ದರ್ಜೆ-2 ರ ಹುದ್ದೆಗಳು ಖಾಲಿ ಇದ್ದು, ಸದರಿ ಸ್ಥಳಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ತರಬೇತಿ ಅಧಿಕಾರಿಗಳಿಗೆ 371ಜೆ ಅಡಿಯಲ್ಲಿ ಪದೋನ್ನತಿ ನೀಡುವ ಪ್ರಸ್ತಾವನೆ ಪ್ರಸ್ತುತ ಯಾವ ಹಂತದಲ್ಲಿದೆ; ಇದ್ದಲ್ಲಿ ಯಾವಾಗ ಕಾರ್ಯ ರೂಪಕ್ಕೆ ತರಲಾಗುವುದು?	ಅರ್ಹತೆ ಹೊಂದಿರುವ ತರಬೇತಿ ಅಧಿಕಾರಿಗಳಿಗೆ ಪ್ರಾಚಾರ್ಯರು ದರ್ಜೆ-2 ಹುದ್ದೆಗೆ ಮುಂಬಡ್ತಿ ನೀಡುವ ಸಂಬಂಧ ಪರಿಶೀಲಿಸುತ್ತಿದ್ದು, ಸದ್ಯದಲ್ಲೇ ಸದರಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಿ ಮುಂಬಡ್ತಿಯನ್ನು ನೀಡಲು ಕ್ರಮವಹಿಸಲಾಗುವುದು.

ಸಂಖ್ಯೆ: ಕೌಉಜೀಇ 51 ಕೈತಪ್ರ 2020

(ಡಾ.ಸಿ.ಎನ್.ಅಶ್ವಥ್ ನಾರಾಯಣ)
ಉಪ ಮುಖ್ಯಮಂತ್ರಿಗಳು ಹಾಗೂ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1291
ಸದಸ್ಯರ ಹೆಸರು	ಶ್ರೀ ನಾಗನಗೌಡ ಕಂದ್ ಕೂರ್
ಉತ್ತರಿಸಬೇಕಾದ ದಿನಾಂಕ:	24.09.2020
ಉತ್ತರಿಸುವ ಸಚಿವರು	ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ	ರಾಜ್ಯದಲ್ಲಿ ಜಿಲ್ಲಾ ಪಂಚಾಯಿತಿ ವತಿಯಿಂದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ವತಿಯಿಂದ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿ ನಿಲಯಗಳಿಗೆ ಅಡುಗೆಯವರು, ಅಡುಗೆ ಸಹಾಯಕರು ಮತ್ತು ರಾತ್ರಿ ಕಾವಲುಗಾರರ ಸಿಬ್ಬಂದಿಗಳ ಸೇವೆಯನ್ನು ಒದಗಿಸಲು ಹೊರ ಸಂಪನ್ಮೂಲ ಏಜೆನ್ಸಿಯವರಿಗೆ ಟೆಂಡರ್ ನಿಬಂಧನೆಗಳಿಗೊಳಪಟ್ಟು ಕಾರ್ಯಾದೇಶವನ್ನು ನೀಡಿರುವುದು ನಿಜವೇ;	ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ಅಡುಗೆಯವರು, ಅಡುಗೆ ಸಹಾಯಕರು ಹಾಗೂ ರಾತ್ರಿ ಕಾವಲುಗಾರರ ಸೇವೆಯನ್ನು ಪಡೆಯಲು ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಟೆಂಡರ್ ಅನ್ನು ಕರೆದು ಹೊರಸಂಪನ್ಮೂಲ ಏಜೆನ್ಸಿಯನ್ನು ನಿಗಧಿಪಡಿಸಿ ಕಾರ್ಯಾದೇಶವನ್ನು ಜಿಲ್ಲಾ ಮಟ್ಟದಲ್ಲಿ ನೀಡಲಾಗುತ್ತದೆ.
ಆ	ಕಾರ್ಯಾದೇಶದಲ್ಲಿನ ಷರತ್ತಿನನ್ವಯ ಮುಂಗಡವಾಗಿ ಕನಿಷ್ಠ 2 ಮಾಹೆಗಳಿಗೆ ಕನಿಷ್ಠ ವೇತನ ಕಾಯ್ದೆಯನ್ವಯ ಸಂದಾಯವಾಗಬೇಕಾದ ವೇತನವನ್ನು ಸಂಬಂಧಿಸಿದ ಸಿಬ್ಬಂದಿಗಳ ಬ್ಯಾಂಕ್ ಖಾತೆಗೆ ಇ.ಸಿ.ಎಸ್ ಅಥವಾ ಆರ್.ಟಿ.ಜಿ.ಎಸ್ ಮೂಲಕ ಪ್ರತಿ ತಿಂಗಳು 5ನೇ ದಿನಾಂಕದೊಳಗೆ ವೇತನ ಪಾವತಿಸ ಬೇಕಾಗಿರುವುದು ನಿಜವಲ್ಲವೇ:	ಹೊರಸಂಪನ್ಮೂಲ ಏಜೆನ್ಸಿಯನ್ನು ನಿಗಧಿಪಡಿಸಿ ಷರತ್ತುಗಳನ್ನು ವಿಧಿಸಿ ಕಾರ್ಯಾದೇಶವನ್ನು ಜಿಲ್ಲಾ ಮಟ್ಟದಲ್ಲಿ ನೀಡಲಾಗುತ್ತದೆ. ನಿಗಧಿತ ಅವಧಿಯೊಳಗೆ ವೇತನವನ್ನು ಪಾವತಿಸಲಾಗುತ್ತಿದೆ.
ಇ	ಸರ್ಕಾರದಿಂದ ನಿಗದಿತ ಅನುದಾನ ಬಿಡುಗಡೆಯಾಗದಿರುವುದರಿಂದ 4-5 ತಿಂಗಳಾದರೂ ಸದರಿ ಸಿಬ್ಬಂದಿಗಳಿಗೆ ವೇತನ ಪಾವತಿಸದೆ ಸದರಿ ಏಜೆನ್ಸಿಯಡಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಜೀವನ ನಿರ್ವಹಣೆಗೆ ತುಂಬಾ ತೊಂದರೆಯಾಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
ಈ	ಹಾಗಿದ್ದಲ್ಲಿ, ಸಿಬ್ಬಂದಿಗೆ ಕೂಡಲೇ ವೇತನವನ್ನು ಪಾವತಿಸುವ ಸಂಬಂಧ ಸರ್ಕಾರ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಮುಖೇನ ಹಣ ಬಿಡುಗಡೆಗೊಳಿಸಲು ಕೈಗೊಂಡಿರುವ	2019-20 ನೇ ಸಾಲಿನಲ್ಲಿ ಬಾಕಿ ಇದ್ದ ಹೊರಸಂಪನ್ಮೂಲ ಸಿಬ್ಬಂದಿಗಳ ವೇತನ ಪಾವತಿಗಾಗಿ ದಿ: 13.03.2020 ರಲ್ಲಿ ಸರ್ಕಾರವು ರೂ.1910.28 ಲಕ್ಷಗಳನ್ನು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1292
ಮಾನ್ಯ ಸದಸ್ಯರ ಹೆಸರು	:	ಶ್ರೀ ಶರಣಬಸಪ್ಪಗೌಡ ದರ್ಶನಾಪುರ್ (ಶಹಾಪುರ)
ಉತ್ತರಿಸಬೇಕಾದ ದಿನಾಂಕ	:	24-09-2020
ಉತ್ತರಿಸುವ ಸಚಿವರು	:	ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ.ಸಂ.	ಪ್ರಶ್ನೆ	ಉತ್ತರ
(ಅ)	ಸುರಪುರ ತಾಲ್ಲೂಕಿನ ಶಹಾಪುರ ಮತಕ್ಷೇತ್ರ ವ್ಯಾಪ್ತಿಗೆ ಬರುವ " ನಗನೂರು" ಗ್ರಾಮದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರದ ಕಟ್ಟಡದ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಸುರಪುರ ತಾಲ್ಲೂಕಿನ ಶಹಾಪುರ ಮತಕ್ಷೇತ್ರ ವ್ಯಾಪ್ತಿಯ "ನಗನೂರು" ಗ್ರಾಮದಲ್ಲಿ ಈಗಾಗಲೇ ಪ್ರಾಥಮಿಕ ಆರೋಗ್ಯ ಕೇಂದ್ರದ ಕಟ್ಟಡವಿದ್ದು, ಕಾರ್ಯನಿರ್ವಹಿಸುತ್ತಿದೆ.
(ಆ)	ಬಂದಿದ್ದಲ್ಲಿ ಆರೋಗ್ಯ ಕೇಂದ್ರ ಮಂಜೂರು ಮಾಡಲು ಕೈಗೊಂಡ ಕ್ರಮಗಳೇನು;	ಉದ್ಭವಿಸುವುದಿಲ್ಲ
(ಇ)	ಯಾವ ಮಾನದಂಡಗಳನ್ನು ಆಧರಿಸಿ ಪ್ರಾಥಮಿಕ ಕೇಂದ್ರಗಳನ್ನು ಮಂಜೂರು ಮಾಡಲಾಗುವುದು?	ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಜನಸಂಖ್ಯೆ ಹಾಗೂ ಭೌಗೋಳಿಕ ಪ್ರದೇಶಗಳಿಗೆ ಅನುಗುಣವಾಗಿ ಮಂಜೂರು ಮಾಡಲಾಗುವುದು. ಸಮತಟ್ಟು ಪ್ರದೇಶಗಳಲ್ಲಿ 30,000 ಜನಸಂಖ್ಯೆ ಹಾಗೂ ಗುಡ್ಡ ಗಾಡು ಮತ್ತು ಗಿರಿಜನ ಪ್ರದೇಶಗಳಲ್ಲಿ 20,000 ಜನಸಂಖ್ಯೆಗೆ ಒಂದು ಪ್ರಾಥಮಿಕ ಆರೋಗ್ಯ ಕೇಂದ್ರ ಮಂಜೂರು ಮಾಡಲಾಗುತ್ತದೆ.

ಆಕುಕ 99 ಎಸ್‌ಎಂಎಂ 2020

(ಬಿ.ಶ್ರೀರಾಮುಲು)

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕರ್ನಾಟಕ ವಿಧಾನ ಸಭೆ

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1294
2. ಮಾನ್ಯ ಸದಸ್ಯರ ಹೆಸರು : ಶ್ರೀ ಪಾಟೀಲ್ ಎಂ.ವೈ (ಅಫ್ಜಲ್‌ಪುರ್)
3. ಉತ್ತರಿಸಬೇಕಾದ ದಿನಾಂಕ : ದಿನಾಂಕ 24.9.2020
4. ಉತ್ತರಿಸುವವರು : ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು

ಕ್ರ. ಸಂ.	ಪ್ರಶ್ನೆ	ಇಲಾಖಾ ಮಾಹಿತಿ
1	2020-21ನೇ ಸಾಲಿನ ಆಯವ್ಯಯದಲ್ಲಿ ಘೋಷಣೆ ಮಾಡಿದಂತೆ ಗಾರ್ಮೆಂಟ್ಸ್ ಕಾರ್ಖಾನೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಒಂದು ಲಕ್ಷ ಮಹಿಳಾ ಕಾರ್ಮಿಕರಿಗೆ "ವನಿತಾ ಸಂಗಾತಿ" ಯೋಜನೆಯಡಿ ಮಾಸಿಕ ಬಸ್ ಪಾಸ್‌ಗಳನ್ನು ಕಾರ್ಖಾನೆಯ ಮಾಲೀಕರು ಮತ್ತು ಬೆಂಗಳೂರು ಮಹಾನಗರ ಸಾರಿಗೆ ಸಹಯೋಗದೊಂದಿಗೆ ಒದಗಿಸಲು ಉದ್ದೇಶಿಸಿದ್ದು, ಇದನ್ನು ಜಾರಿಗೊಳಿಸಲಾಗಿದೆಯೇ;	2020-21ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಸಿದ್ಧ ಉಡುಪು ಕಾರ್ಖಾನೆಗಳಲ್ಲಿ ದುಡಿಯುವ ಮಹಿಳಾ ಕಾರ್ಮಿಕರಿಗೆ ಸಾರಿಗೆ ವ್ಯವಸ್ಥೆಯನ್ನು ಕಲ್ಪಿಸುವ ನಿಟ್ಟಿನಲ್ಲಿ "ವನಿತಾ ಸಂಗಾತಿ" ಯೋಜನೆಯನ್ನು ಘೋಷಿಸಿದ್ದು, ಈ ಸಂಬಂಧ ರೂ. 25.20 ಕೋಟಿಗಳನ್ನು ಮೀಸಲಿಡಲಾಗಿತ್ತು. ತದನಂತರ, ಕೋವಿಡ್-19ರ ಹಿನ್ನೆಲೆಯಲ್ಲಿ ಸದರಿ ಯೋಜನೆಯನ್ನು ಜಾರಿಗೊಳಿಸಿರುವುದಿಲ್ಲ.
2	ಜಾರಿಗೊಳಿಸಿದ್ದಲ್ಲಿ, ಎಷ್ಟು ಜನ ಮಹಿಳಾ ಕಾರ್ಮಿಕರು ಇದರ ಪ್ರಯೋಜನ ಪಡೆದಿದ್ದಾರೆ;	ಪ್ರಾರಂಭಿಕ ಹಂತದಲ್ಲಿ, ಸುಮಾರು 1 ಲಕ್ಷ ಮಹಿಳಾ ಕಾರ್ಮಿಕರಿಗೆ ಬಸ್ ಪಾಸ್ ಒದಗಿಸಲು ಉದ್ದೇಶಿಸಲಾಗಿದ್ದು, ಕೋವಿಡ್-19ರ ಹಿನ್ನೆಲೆಯಲ್ಲಿ ಸದರಿ ಯೋಜನೆಯನ್ನು ಜಾರಿಮಾಡಲು ಸಾಧ್ಯವಾಗಿರುವುದಿಲ್ಲ.
3	ಈ ಯೋಜನೆ ಇನ್ನು ಪ್ರಾರಂಭಿಸದೇ ಇದ್ದಲ್ಲಿ ಯಾವಾಗ ಆರಂಭಿಸಲಾಗುವುದು; ವಿಳಂಬಕ್ಕೆ ಕಾರಣಗಳೇನು?	ಯೋಜನಾ ಇಲಾಖೆಯು ಹೊಸ ಯೋಜನೆಗಳ ಸಂಬಂಧ ಸೂಚನೆಗಳನ್ನು ನೀಡಿದ್ದು, ಇದೀಗ ಸದರಿ ಯೋಜನೆಯನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಸಂಖ್ಯೆ: ಕಾಇ 79 ಕಾಬಾನಿ 2020

(ಅರಬೈಲ್ ಶಿವರಾಂ ಹೆಬ್ಬಾರ್)
ಕಾರ್ಮಿಕ & ಸಕ್ಕರೆ ಸಚಿವರು

ಕರ್ನಾಟಕ ವಿಧಾನ ಸಭೆ

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1295
2. ಮಾನ್ಯ ಸದಸ್ಯರ ಹೆಸರು : ಶ್ರೀ ಪಾಟೀಲ್ ಎಂ.ವೈ. (ಅಫ್ಜಲ್‌ಪುರ್)
3. ಉತ್ತರಿಸಬೇಕಾದ ದಿನಾಂಕ : 24/09/2020
4 ಉತ್ತರಿಸುವವರು : ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	2020-21ನೇ ಸಾಲಿನ ಆಯವ್ಯಯದಲ್ಲಿ ಘೋಷಣೆ ಮಾಡಿದಂತೆ ರಾಜ್ಯಾದ್ಯಂತ ಕಟ್ಟಡ ಕಾರ್ಮಿಕರ ಆರು ವರ್ಷದೊಳಗಿನ ಮಕ್ಕಳ ಪಾಲನೆ ಮಾಡಲು ಕಟ್ಟಡ ನಿರ್ಮಾಣ ಸ್ಥಳಗಳಲ್ಲಿ 10 ಸಂಚಾರಿ ಶಿಶುಪಾಲನಾ ಕೇಂದ್ರಗಳನ್ನು ಸ್ಥಾಪಿಸಲು ಇರುವ ಮಾರ್ಗಸೂಚಿಗಳೇನು ಹಾಗೂ ಎಷ್ಟು ಕೇಂದ್ರಗಳನ್ನು ಸ್ಥಾಪಿಸಿದೆ:	2020-21ನೇ ಸಾಲಿನ ಆಯವ್ಯಯದಲ್ಲಿ ಘೋಷಣೆ ಮಾಡಿದಂತೆ ರಾಜ್ಯಾದ್ಯಂತ ಕಟ್ಟಡ ಕಾರ್ಮಿಕರ ಆರು ವರ್ಷದೊಳಗಿನ ಮಕ್ಕಳ ಪಾಲನೆ ಮಾಡಲು ಕಟ್ಟಡ ನಿರ್ಮಾಣ ಸ್ಥಳಗಳಲ್ಲಿ 10 ಸಂಚಾರಿ ಶಿಶುಪಾಲನಾ ಕೇಂದ್ರಗಳನ್ನು ಸ್ಥಾಪಿಸಲು ಮಾರ್ಗಸೂಚಿಗಳನ್ನು ಸಿದ್ಧಪಡಿಸಲಾಗುತ್ತಿದ್ದು, ಇನ್ನೂ ಯಾವುದೇ ಕೇಂದ್ರಗಳನ್ನು ಸ್ಥಾಪಿಸಿರುವುದಿಲ್ಲ.
ಆ)	ಸ್ಥಾಪಿಸಿದ್ದಲ್ಲಿ, ಇದುವರೆಗೂ ಎಷ್ಟು ಜನ ಫಲಾನುಭವಿಗಳು ಇದರ ಪ್ರಯೋಜನ ಪಡೆದುಕೊಂಡಿದ್ದಾರೆ:	ಸಂಚಾರಿ ಶಿಶುಪಾಲನಾ ಕೇಂದ್ರಗಳನ್ನು ಇನ್ನೂ ಸ್ಥಾಪಿಸಿಲ್ಲವಾದ್ದರಿಂದ ಪ್ರಯೋಜನ ಪಡೆದವರ ವಿವರ ಇರುವುದಿಲ್ಲ.
ಇ)	ಈ ಯೋಜನೆ ಇನ್ನೂ ಪ್ರಾರಂಭಿಸದೇ ಇದ್ದಲ್ಲಿ ಯಾವಾಗ ಆರಂಭಿಸಲಾಗುವುದು; ವಿಳಂಬಕ್ಕೆ ಕಾರಣಗಳೇನು? (ಜಿಲ್ಲಾವಾರು ಮಾಹಿತಿ ಒದಗಿಸುವುದು)	ಕೋವಿಡ್-19 ಹಿನ್ನಲೆಯಲ್ಲಿ ಸಂಚಾರಿ ಶಿಶುಪಾಲನಾ ಕೇಂದ್ರಗಳನ್ನು ತೆರೆಯಲು ವಿಳಂಬವಾಗಿರುತ್ತದೆ. ಕೂಡಲೇ ಪ್ರಾರಂಭಿಸಲು ಅಗತ್ಯ ಕ್ರಮಕೈಗೊಳ್ಳಲಾಗುವುದು.

ಕಾಇ 318 ಎಲ್‌ಇಟಿ 2020

(ಅರಬೈಲ್ ಶಿವರಾಂ ಹೆಬ್ಬಾರ್)
ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1296

ಸದಸ್ಯರ ಹೆಸರು : ಶ್ರೀ ಪಾಟೀಲ್ ಎಂ. ವೈ (ಅಫ್ಜಲ್‌ಪುರ್)

ಉತ್ತರಿಸುವ ದಿನಾಂಕ : 24.09.2020.

ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು.

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಅಫಜಲಪೂರ ಮತಕ್ಷೇತ್ರದ ಕಲಬುರಗಿ ತಾಲ್ಲೂಕಿನ ಫರಪತ್‌ಬಾರ್ ಗ್ರಾಮ ಹೋಬಳಿ ಗ್ರಾಮವಾಗಿರುವುದು. ಸರ್ಕಾರದ ಗಮನದಲ್ಲಿದೆಯಾ;	ಬಂದಿದೆ.
ಆ)	ಸದರಿ ಗ್ರಾಮದ ಸುತ್ತ-ಮುತ್ತಲೂ 30 ಹಳ್ಳಿಗಳಿದ್ದು. ಇಲ್ಲಿಯ ಜನರಿಗೆ ಅನುಕೂಲವಾಗುವಂತೆ ಕನ್ನಡ ಮಾಧ್ಯಮ ಹಾಗೂ ಆಂಗ್ಲ ಮಾಧ್ಯಮ (ಪಬ್ಲಿಕ್) ಶಾಲೆಯನ್ನು ತೆರೆಯುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;	ಹೌದು.
ಇ)	ಹಾಗಿದ್ದಲ್ಲಿ, ಈ ಪಬ್ಲಿಕ್ ಶಾಲೆಯನ್ನು ಪ್ರಾರಂಭಿಸಲು ಹೊಸ ಕಟ್ಟಡದ ಅಗತ್ಯವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
ಈ)	ಬಂದಿದ್ದಲ್ಲಿ ಈಗಾಗಲೇ ಸರ್ಕಾರವು ತೆಗೆದುಕೊಂಡ ನಿರ್ಧಾರದಂತೆ ಪಬ್ಲಿಕ್ ಶಾಲೆಯನ್ನು ಮಂಜೂರು ಮಾಡಲು ಯಾವಾಗ ಕ್ರಮ ಕೈಗೊಳ್ಳಲಾಗುವುದು?	2019-20ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಮುಂದಿನ 04 ವರ್ಷಗಳಲ್ಲಿ ಒಂದು ಸಾವಿರ ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಹೋಬಳಿ ಕೇಂದ್ರ ಸ್ಥಾನಗಳಲ್ಲಿ ಸ್ಥಾಪಿಸಲಾಗುವುದು ಎಂದು ಘೋಷಿಸಲಾಗಿರುತ್ತದೆ. ಈಗಾಗಲೇ 2018-19ನೇ ಸಾಲಿನಲ್ಲಿ 176 ಮತ್ತು 2019-20ನೇ ಸಾಲಿನಲ್ಲಿ 100 ಒಟ್ಟು 276 ಕೆ.ಪಿ.ಎಸ್ ಶಾಲೆಗಳನ್ನು ಪ್ರಾರಂಭಿಸಲಾಗಿದೆ. ಉಳಿದ ಕೆ.ಪಿ.ಎಸ್ ಶಾಲೆಗಳನ್ನು ಹಂತ ಹಂತವಾಗಿ ಪ್ರಾರಂಭಿಸಲು ಕ್ರಮವಹಿಸಲಾಗುತ್ತಿದೆ.

ಸಂಖ್ಯೆ: ಇಡಿ 37 ಎಸ್‌ಟಿಬಿ 2020

S. Su

(ಎಸ್. ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ
ಸಕಾಲ ಸಚಿವರು

ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ 7ನೇ ಅಧಿವೇಶನ)

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1298

2) ಸದಸ್ಯರ ಹೆಸರು : ಶ್ರೀ ಸೋಮಲಿಂಗಪ್ಪ ಎಂ.ಎಸ್ (ಸಿರಗುಪ್ಪ)

3) ಉತ್ತರಿಸುವ ದಿನಾಂಕ : 24-09-2020

4) ಉತ್ತರಿಸುವವರು : ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು

ಕ್ರ ಸಂ	ಪ್ರಶ್ನೆ	ಉತ್ತರ
ಅ)	ಅರಣ್ಯ ಇಲಾಖೆಯ ವತಿಯಿಂದ ರಸ್ತೆ ಬದಿಗಳಲ್ಲಿ ಗಿಡ ನೆಡುವ ಯೋಜನೆ ಜಾರಿಯಲ್ಲಿದೆಯೇ;	ಹೌದು.
ಆ)	ಹಾಗಿದ್ದಲ್ಲಿ, ಕಳೆದ 3 ವರ್ಷಗಳಲ್ಲಿ ಸಿರಗುಪ್ಪ ಕ್ಷೇತ್ರ ವ್ಯಾಪ್ತಿಯಲ್ಲಿ ಎಷ್ಟು ಗಿಡಗಳನ್ನು ನೆಡಲಾಗಿದೆ;	ಕಳೆದ 3 ವರ್ಷಗಳಲ್ಲಿ ಸಿರಗುಪ್ಪ ಕ್ಷೇತ್ರ ವ್ಯಾಪ್ತಿಯಲ್ಲಿ ನೆಟ್ಟ ಗಿಡಗಳ ವಿವರ ಕೆಳಕಂಡಂತಿದೆ. (see table below)
ಇ)	ಸಿರಗುಪ್ಪ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಭೋಮಲಾಪುರ ಮತ್ತು ಮಿಟ್ಟಿಸೂಗೂರು ಗ್ರಾಮಗಳ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ರೈತರು ಉಳುಮೆ ಮಾಡುವ ಭೂಮಿಯನ್ನು ಅರಣ್ಯ ಇಲಾಖೆಯವರು ವಶಪಡಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಇಲ್ಲ.
ಈ)	ಹಾಗಿದ್ದಲ್ಲಿ ವಶಪಡಿಸಿಕೊಂಡಿರುವ ಉದ್ದೇಶವೇನು;	ಉಪ ಪ್ರಶ್ನೆ 'ಇ' ನಲ್ಲಿ ಉತ್ತರಿಸಿರುವುದರಿಂದ, ಈ ಪ್ರಶ್ನೆಗಳು ಉದ್ಭವಿಸುವುದಿಲ್ಲ.
ಉ)	ಭೂಮಿ ಕಳೆದುಕೊಂಡಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಬಡ ರೈತರಿಗೆ ಸರ್ಕಾರದಿಂದ ಪರಿಹಾರ ನೀಡಲಾಗಿದೆಯೇ?	

ಕ್ರ ಸಂ.	ವರ್ಷ	ನೆಟ್ಟ ಗಿಡಗಳ ಸಂಖ್ಯೆ
1	2017-18	46410
2	2018-19	5850
3	2019-20	14490

ಸಂಖ್ಯೆ: ಅಪಜೀ 49 ಎಫ್‌ಟಿಎಸ್ 2020

(ಆನಂದ್ ಸಿಂಗ್)
ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1300
ಸದಸ್ಯರ ಹೆಸರು	ಶ್ರೀ ಮಹೇಶ್ ಸಾ.ರಾ. (ಕೃಷ್ಣರಾಜನಗರ)
ಉತ್ತರಿಸಬೇಕಾದ ದಿನಾಂಕ	24.09.2020
ಉತ್ತರಿಸಬೇಕಾದ ಸಚಿವರು	ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ)

	ಪ್ರಶ್ನೆ	ಉತ್ತರ
(ಅ)	ರಾಜ್ಯದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಹಲವಾರು ವರ್ಷಗಳಿಂದ ಪ್ರಾಂಶುಪಾಲರ ಹುದ್ದೆಗಳನ್ನು ಭರ್ತಿ ಮಾಡದೆ ಇರುವುದರಿಂದ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ದೊರೆಯದೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು.
(ಆ)	ಹಾಗಿದ್ದಲ್ಲಿ, ಸದರಿ ಪ್ರಾಂಶುಪಾಲರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ಸಂಪೂರ್ಣ ಮಾಹಿತಿ ನೀಡುವುದು)	ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಒಟ್ಟು 310 ಪ್ರಾಂಶುಪಾಲರ ಹುದ್ದೆಗಳನ್ನು ಯು.ಜಿ.ಸಿ ಮಾರ್ಗಸೂಚಿಗಳು/ಮಾನದಂಡಗಳನ್ವಯ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/121/ಡಿಸಿಇ/2018, ದಿನಾಂಕ:09.09.2020 ರಲ್ಲಿ ವಿಶೇಷ ನೇಮಕಾತಿ ನಿಯಮಗಳನ್ನು ರೂಪಿಸಿ ಅಧಿಸೂಚನೆಯನ್ನು ಹೊರಡಿಸಲಾಗಿದೆ. ಪ್ರಸ್ತುತ ಕೋವಿಡ್–19 ಹಿನ್ನೆಲೆಯಲ್ಲಿ 2020–21ನೇ ಸಾಲಿನಲ್ಲಿ ಯಾವುದೇ ನೇರ ನೇಮಕಾತಿಯನ್ನು ಕೈಗೊಳ್ಳುವಂತಿಲ್ಲ ಎಂಬುದಾಗಿ ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ:ಆಇ/03/ಬಿಇಎಂ/2020, ದಿನಾಂಕ: 06.07.2020 ರಲ್ಲಿ ನಿರ್ಬಂಧಿಸಲಾಗಿದೆ. ಆದಾಗ್ಯೂ, ಪ್ರಾಂಶುಪಾಲರು ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ನೇಮಕಾತಿ ಪ್ರಕ್ರಿಯೆಯನ್ನು ಕೈಗೊಳ್ಳಲು ಅನುಮತಿ ನೀಡುವಂತೆ ಆರ್ಥಿಕ ಇಲಾಖೆಯನ್ನು ಕೋರಲಾಗಿದೆ.
(ಇ)	ಪ್ರಾಂಶುಪಾಲರ ಹುದ್ದೆಗೆ ಯು.ಜಿ.ಸಿ. ನಿಗಧಿಪಡಿಸಿರುವ 15 ವರ್ಷಗಳ ಬೋಧನಾ ಅನುಭವ ಮತ್ತು ಪಿ.ಹೆಚ್.ಡಿ ಅರ್ಹತೆಯುಳ್ಳ ಅರ್ಹ ಅಭ್ಯರ್ಥಿಗಳು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಇದ್ದಾಗ್ಯೂ, ಪ್ರಾಂಶುಪಾಲರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರಕ್ಕೆ ಇರುವ ತೊಂದರೆಗಳೇನು; (ಸಂಪೂರ್ಣ ಮಾಹಿತಿ ನೀಡುವುದು)	
(ಈ)	ಅರ್ಹತೆಗಳು ಇಲ್ಲದಿರುವ ಇತ್ತೀಚೆಗೆ ನೇಮಕಗೊಂಡ ಉಪನ್ಯಾಸಕರು ಕಾಲೇಜುಗಳಲ್ಲಿ ಪ್ರಾಂಶುಪಾಲರಾಗಿ ಕಾರ್ಯ ನಿರ್ವಹಿಸುತ್ತಿರುವುದರಿಂದ ಕಾಲೇಜುಗಳಲ್ಲಿನ ವಿದ್ಯಾಭ್ಯಾಸದ ಗುಣಮಟ್ಟ ಕುಸಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಸರ್ಕಾರ ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣ ಮಾಹಿತಿ ನೀಡುವುದು)	ಪ್ರಸ್ತುತ, ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಪ್ರಾಂಶುಪಾಲರ ಹುದ್ದೆಗೆ ಸೇವಾ ಜೇಷ್ಠತೆಯಲ್ಲಿ ಹಿರಿಯರಾಗಿರುವ ಅನುಭವಿ ಬೋಧಕರಿಗೆ ಪ್ರಾಂಶುಪಾಲರ ಪ್ರಭಾರವನ್ನು ವಹಿಸಲಾಗುತ್ತಿದ್ದು, ಇದರಿಂದಾಗಿ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡಲು ಕ್ರಮವಹಿಸಲಾಗುತ್ತಿದೆ.

ಇಡಿ 167 ಡಿಸಿಇ 2020

(ಡಾ. ಅಶ್ವಥ್ ನಾರಾಯಣ ಸಿ.ಎನ್.)
ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ)

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1304

ಸದಸ್ಯರ ಹೆಸರು : ಶ್ರೀ ವೆಂಕಟ್‌ರಾವ್ ನಾಡಗೌಡ (ಸಿಂಧನೂರು)

ಉತ್ತರಿಸುವ ದಿನಾಂಕ : 24.09.2020

ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
(ಅ)	ರಾಜ್ಯದಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅತಿಥಿ ಉಪನ್ಯಾಸಕರುಗಳಿಗೆ ಕಳೆದ ಎರಡು ವರ್ಷಗಳಿಂದ ವೇತನ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
(ಆ)	ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಛೇರಿ ವೆಚ್ಚಗಳಿಗೆ ಅಗತ್ಯವಿರುವ ಅನುದಾನವನ್ನು ಒದಗಿಸದೆ ಕಳೆದ ಎರಡು ವರ್ಷಗಳಿಂದ ವಿದ್ಯುಚ್ಛಕ್ತಿ, ದೂರವಾಣಿ, ವಾಹನ ದುರಸ್ತಿ ಸೆಕ್ಯೂರಿಟಿ ವೆಚ್ಚ ಮುಂತಾದ ಬಿಲ್ಲುಗಳು ತೀರುವಳಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
(ಇ)	ಹಾಗಿದ್ದಲ್ಲಿ, ಅತಿಥಿ ಉಪನ್ಯಾಸಕರಿಗೆ ವೇತನ ಪಾವತಿಗೆ ಹಾಗೂ ಕಛೇರಿ ವೆಚ್ಚವಾದ ವಿದ್ಯುಚ್ಛಕ್ತಿ, ದೂರವಾಣಿ, ವಾಹನ ದುರಸ್ತಿ ಸೆಕ್ಯೂರಿಟಿ ವೆಚ್ಚಕ್ಕಾಗಿ ಸರ್ಕಾರವು ಅನುದಾನವನ್ನು ಕೂಡಲೇ ಬಿಡುಗಡೆಗೊಳಿಸಲು ಕ್ರಮವಹಿಸುವುದೇ? (ಸಂಪೂರ್ಣ ಮಾಹಿತಿ ನೀಡುವುದು)	ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ರೂ. **354.50** ಲಕ್ಷಗಳ ಅತಿಥಿ ಉಪನ್ಯಾಸಕರ ಭತ್ಯೆ ಪಾವತಿ ಬಾಕಿ ಇದ್ದು, ಪ್ರಸ್ತುತ ಸಾಲಿನ ಆಯವ್ಯಯದಿಂದ ಬಿಡುಗಡೆ ಮಾಡಲು ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಲಾಗಿದೆ. **2020-21**ನೇ ಸಾಲಿನಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿನ ವಿದ್ಯುಚ್ಛಕ್ತಿ, ದೂರವಾಣಿ, ವಾಹನ, ಸೆಕ್ಯೂರಿಟಿ, ಅತಿಥಿ ಉಪನ್ಯಾಸಕರ ಭತ್ಯೆ, ಕಛೇರಿ ವೆಚ್ಚಗಳಿಗೆ ರೂ.**293.00**ಲಕ್ಷಗಳನ್ನು ಒದಗಿಸಲಾಗಿದ್ದು, ಅಗತ್ಯಾನುಸಾರ ಹೆಚ್ಚುವರಿ ಅನುದಾನವನ್ನು ಉಳಿತಾಯ ಸಂಭವಿಸಬಹುದಾದ ಲೆಕ್ಕಶೀರ್ಷಿಕೆಯಿಂದ ಪುನರ್ ವಿನಿಯೋಗ ಮಾಡಿ ಬಿಡುಗಡೆ ಮಾಡಲು ಕ್ರಮವಹಿಸಲಾಗುವುದು.

ಕಡತ ಸಂಖ್ಯೆ: ಇಡಿ 101 ಹೆಚ್‌ಪಿಟಿ 2020

(ಡಾ: ಅಶ್ವಥ್ ನಾರಾಯಣ ಸಿ.ಎನ್)
ಉಪ ಮುಖ್ಯಮಂತ್ರಿಗಳು ಹಾಗೂ
ಉನ್ನತ ಶಿಕ್ಷಣ ಸಚಿವರು

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1358
ಮಾನ್ಯ ಸದಸ್ಯರ ಹೆಸರು	ಶ್ರೀ ರಘುಮೂರ್ತಿ ಟಿ. (ಚಳ್ಳಕೆರೆ)
ಉತ್ತರಿಸಬೇಕಾದ ದಿನಾಂಕ	24.09.2020
ಉತ್ತರಿಸುವ ಸಚಿವರು	ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ಚಳ್ಳಕೆರೆ ಶ್ರೀ ಕೃಷ್ಣ ಭವನ ನಿರ್ಮಾಣಕ್ಕೆ 150 ಲಕ್ಷಗಳ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ನೀಡಿದ್ದು, ಈವರೆವಿಗೂ ಪೂರ್ಣ ಅನುದಾನ ಬಿಡುಗಡೆ ಆಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಸರ್ಕಾರದ ಆದೇಶ ಸಂಖ್ಯೆ : ಬಿಸಿಡಬ್ಲ್ಯೂ 400 ಬಿಎಂಎಸ್ 2015 ದಿನಾಂಕ : 30.02.2015 ರ ಆದೇಶದಲ್ಲಿ ಸದರಿ ಸಂಸ್ಥೆಗೆ ರೂ. 50.00 ಲಕ್ಷಗಳನ್ನು ಮಂಜೂರು ಮಾಡಲಾಗಿದ್ದು, ಸದರಿ ಅನುದಾನವನ್ನು ಸಂಪೂರ್ಣವಾಗಿ ಸಂಸ್ಥೆಯವರಿಗೆ ಬಿಡುಗಡೆ ಮಾಡಲಾಗಿರುತ್ತದೆ.
ಆ)	ಹಾಗಿದ್ದಲ್ಲಿ, ಸದರಿ ಭವನ ಪೂರ್ಣಗೊಳಿಸಲು ನಿಗಧಿಪಡಿದ ಅನುದಾನ ಯಾವಾಗ ಬಿಡುಗಡೆ ಮಾಡಲು ಸರ್ಕಾರ ಕ್ರಮವಹಿಸುವುದು;	
ಇ)	ಚಳ್ಳಕೆರೆ ಪಟ್ಟಣದಲ್ಲಿ ನಿರ್ಮಾಣ ಮಾಡುತ್ತಿರುವ ಕನಕ ಭವನಕ್ಕೆ 100.00 ಲಕ್ಷಗಳ ಹೆಚ್ಚುವರಿ ಅನುದಾನ ಬಿಡುಗಡೆ ಮಾಡಲು ಪ್ರಸ್ತಾವನೆ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;	ಹೌದು.
ಈ)	ಹಾಗಿದ್ದಲ್ಲಿ, ಸದರಿ ಭವನ ನಿರ್ಮಾಣ ಪೂರ್ಣಗೊಳಿಸಲು ಅನುದಾನವನ್ನು ಯಾವಾಗ ಬಿಡುಗಡೆ ಮಾಡಲಾಗುವುದು ? (ವಿವರ ಒದಗಿಸುವುದು)	ಸರ್ಕಾರ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 206 ಬಿಎಂಎಸ್ 2014, ಬೆಂಗಳೂರು ದಿನಾಂಕ : 04.03.2014 ರ ಆದೇಶದಲ್ಲಿ ಸದರಿ ಸಂಸ್ಥೆಗೆ ರೂ. 100.00 ಲಕ್ಷಗಳನ್ನು ಬಿಡುಗಡೆ ಮಾಡಿ ಆದೇಶಿಸಲಾಗಿರುತ್ತದೆ. ಮುಂದುವರೆದು, ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 270 ಬಿಎಂಎಸ್ 2018 ಬೆಂಗಳೂರು ದಿನಾಂಕ : 27.02.2018 ರ ಆದೇಶದಲ್ಲಿ ಸದರಿ ಕನಕ ಭವನ ಪೂರ್ಣಗೊಳಿಸಲು ರೂ. 25.00 ಲಕ್ಷಗಳನ್ನು ಮಂಜೂರು ಮಾಡಲಾಗಿದ್ದು, ಮೊದಲನೇ ಕಂತಾಗಿ ರೂ. 6.25 ಲಕ್ಷಗಳನ್ನು ಸಂಸ್ಥೆಗೆ ಬಿಡುಗಡೆ ಮಾಡಲಾಗಿರುತ್ತದೆ.

ಸಂಖ್ಯೆ:ಹಿಂವಕ 539 ಬಿಎಂಎಸ್ 2020

(ಬಿ.ಶ್ರೀರಾಮುಲು)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ,
ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

ಕರ್ನಾಟಕ ವಿಧಾನ ಸಭೆ

1	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1360
2	ಸದಸ್ಯರ ಹೆಸರು	ಶ್ರೀ ರಘುಮೂರ್ತಿ ಟಿ.
3	ಉತ್ತರಿಸಬೇಕಾದ ದಿನಾಂಕ	24/09/2020
4	ಉತ್ತರಿಸಬೇಕಾದ ಸಚಿವರು	ವೈದ್ಯಕೀಯ ಶಿಕ್ಷಣ ಸಚಿವರು

ಕ್ರ.ಸಂ	ಪ್ರಶ್ನೆಗಳು	ಉತ್ತರಗಳು
ಅ)	ಚಿತ್ರದುರ್ಗ ಜಿಲ್ಲೆಗೆ ಸರ್ಕಾರಿ ಮೆಡಿಕಲ್ ಕಾಲೇಜ್ ಪ್ರಾರಂಭ ಮಾಡಲು ಮಂಜೂರಾತಿ ನೀಡಲಾಗಿದೆಯೇ;	2013-14 ನೇ ಸಾಲಿನ ಆಯವ್ಯಯ ಘೋಷಣೆಯಲ್ಲಿ ಚಿತ್ರದುರ್ಗದಲ್ಲಿ ಹೊಸ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸಲು ಪ್ರಸ್ತಾಪಿಸಲಾಗಿದ್ದು, ಸರ್ಕಾರದ ಆದೇಶ ಸಂಖ್ಯೆ ಆಕುಕ 172 ಎಂಪಿಎಸ್ 2014 ದಿನಾಂಕ 12/06/2014 ರಲ್ಲಿ ಸದರಿ ವೈದ್ಯಕೀಯ ಕಾಲೇಜಿನ ಸ್ಥಾಪನೆಗೆ ಮಂಜೂರಾತಿ ನೀಡಲಾಗಿದೆ. ಆದರೆ ಆರ್ಥಿಕ ಮಿತವ್ಯಯದ ಕಾರಣದಿಂದಾಗಿ ಆಯವ್ಯಯ ಘೋಷಣೆಯಂತೆ ಸದರಿ ಆರ್ಥಿಕ ವರ್ಷದಲ್ಲಿ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸಲಾಗಿರುವುದಿಲ್ಲ. ಮುಂದುವರೆದು ಕೇಂದ್ರ ಸರ್ಕಾರದ ಯೋಜನೆಯನ್ವಯ ಸರ್ಕಾರಿ/ಖಾಸಗಿ ವೈದ್ಯಕೀಯ ಕಾಲೇಜುಗಳಿರದ ಜಿಲ್ಲೆಗಳಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲು ಅವಕಾಶವಿರುತ್ತದೆ. ಚಿತ್ರದುರ್ಗ ಜಿಲ್ಲೆಯಲ್ಲಿ ಈಗಾಗಲೇ ಖಾಸಗಿ ವೈದ್ಯಕೀಯ ಕಾಲೇಜು ಕಾರ್ಯ ನಿರ್ವಹಿಸುತ್ತಿರುವುದರಿಂದ ಈ ಜಿಲ್ಲೆಯಲ್ಲಿ ವೈದ್ಯಕೀಯ ಕಾಲೇಜನ್ನು ಸ್ಥಾಪಿಸುವುದು ಕೇಂದ್ರ ಸರ್ಕಾರದ ಯೋಜನೆಯ ವ್ಯಾಪ್ತಿಗೆ ಒಳಪಡುವುದಿಲ್ಲ. ರಾಜ್ಯ ಸರ್ಕಾರದ ವತಿಯಿಂದ ಹೊಸ ವೈದ್ಯಕೀಯ ಕಾಲೇಜನ್ನು ಸ್ಥಾಪಿಸಲು ಅಂದಾಜು ರೂ.610.00 ಕೋಟಿಗಳ ಅನಾವರ್ತಕ ವೆಚ್ಚ ಹಾಗೂ ವಾರ್ಷಿಕ ರೂ.60.00 ಕೋಟಿಗಳ ಆವರ್ತಕ ವೆಚ್ಚದ ಅವಶ್ಯಕತೆ ಇರುತ್ತದೆ. ಪ್ರಸ್ತುತ ಅನುದಾನದ ಕೊರತೆಯ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರದ ವತಿಯಿಂದಲೇ ಪೂರ್ಣ ವೆಚ್ಚ ಭರಿಸಿ, ಹೊಸ ವೈದ್ಯಕೀಯ ಕಾಲೇಜುಗಳನ್ನು ಸ್ಥಾಪಿಸುವ ಯಾವುದೇ ಪ್ರಸ್ತಾವನೆಗಳು ಸರ್ಕಾರದ ಪರಿಶೀಲನೆಯಲ್ಲಿರುವುದಿಲ್ಲ.
ಆ)	ಚಿತ್ರದುರ್ಗ ಜಿಲ್ಲೆಯು ಅತೀ ಹಿಂದುಳಿದಿರುವ ಜಿಲ್ಲೆಯಾಗಿದ್ದು, ತೀವ್ರ ಬರಗಾಲದ ಪರಿಸ್ಥಿತಿ ಎದುರಿಸುತ್ತಿರುವ ಇಲ್ಲಿನ ಕಡು ಬಡವರ, ಆರ್ಥಿಕವಾಗಿ ಹಿಂದುಳಿದವರ ಆರೋಗ್ಯದ ದೃಷ್ಟಿಯಿಂದ ಸರ್ಕಾರಿ ಮೆಡಿಕಲ್ ಕಾಲೇಜು ಪ್ರಾರಂಭ ಮಾಡಲು ಯಾವಾಗ ಕ್ರಮ ವಹಿಸುತ್ತದೆ? (ಪೂರ್ಣ ವಿವರ ನೀಡುವುದು)	

ಸಂಖ್ಯೆ: ಎಂಇಡಿ 473 ಎಂಎಂಸಿ 2020

(ಡಾ|| ಕೆ. ಸುಧಾಕರ್)
ವೈದ್ಯಕೀಯ ಶಿಕ್ಷಣ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:		1364
ಮಾನ್ಯ ಸದಸ್ಯರ ಹೆಸರು		ಶ್ರೀ ಸಂಗಮೇಶ್ವರ್ ಬಿ.ಕೆ.
ಉತ್ತರಿಸುವ ಸಚಿವರು		ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ)
ಉತ್ತರಿಸಬೇಕಾದ ದಿನಾಂಕ		24-09-2020
ಪ್ರಶ್ನೆ		ಉತ್ತರ
(ಅ)	ರಾಜ್ಯದ ವಿಶ್ವವಿದ್ಯಾನಿಲಯಗಳಲ್ಲಿರುವ ಹಲವು ಉಪನ್ಯಾಸಕರುಗಳ ಬೋಧನಾ ಗುಣಮಟ್ಟ ಕಳಪೆಯಾಗಿದೆ ಎಂಬುದು ನಿಜವೇ;	ಇಲ್ಲ.
(ಆ)	ಹಾಗಿದ್ದಲ್ಲಿ, ಗುಣಮಟ್ಟ ಹೆಚ್ಚಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;	ಉದ್ಭವಿಸುವುದಿಲ್ಲ.
(ಇ)	ಗುಣಮಟ್ಟ ಕಳಪೆಯಾದ ಉಪನ್ಯಾಸಕರನ್ನು ಪ್ರಥಮ ದರ್ಜೆ ಕಾಲೇಜುಗಳಿಗೆ ವರ್ಗಾಯಿಸಿ ಪ್ರಥಮ ದರ್ಜೆ ಕಾಲೇಜುಗಳಲ್ಲಿರುವ ಉತ್ತಮ ಗುಣಮಟ್ಟದ ಉಪನ್ಯಾಸಕರನ್ನು ಸ್ನಾತಕೋತ್ತರ ಕೇಂದ್ರಗಳಿಗೆ, ವಿಶ್ವವಿದ್ಯಾಲಯಗಳಿಗೆ ವರ್ಗಾಯಿಸಲು ಸರ್ಕಾರಕ್ಕೆ ಇರುವ ಸಮಸ್ಯೆಗಳೇನು;	ಉದ್ಭವಿಸುವುದಿಲ್ಲ.
(ಈ)	ಯು.ಜಿ.ಸಿ. ನಿಯಮಗಳು ಅಡ್ಡಿಯಾಗುವುದಾದರೆ ಅವುಗಳನ್ನು ತಿದ್ದುಪಡಿ ಮಾಡಿ ಸರಿಪಡಿಸಲು ಸರ್ಕಾರಕ್ಕೆ ಅವಕಾಶವಿರುವುದೇ?	ಉದ್ಭವಿಸುವುದಿಲ್ಲ.

ಸಂಖ್ಯೆ: ಇಡಿ 276 ಯುಎನ್‌ಇ 2020

(ಡಾ: ಅಶ್ವತ್ಥ್ ನಾರಾಯಣ ಸಿ.ಎನ್.)
ಉಪ ಮುಖ್ಯಮಂತ್ರಿಗಳು
(ಉನ್ನತ ಶಿಕ್ಷಣ, ಐಟಿ & ಬಿಟಿ,
ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃ
ಉದ್ಯಮಶೀಲತೆ ಮತ್ತು ಜೀವನೋಪಾಯ

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1368
ಮಾನ್ಯ ಸದಸ್ಯರ ಹೆಸರು	ಶ್ರೀ ಲಿಂಗೇಶ ಕೆ.ಎಸ್(ಬೇಲೂರು)
ಉತ್ತರಿಸಬೇಕಾದ ದಿನಾಂಕ	24.09.2020
ಉತ್ತರಿಸುವ ಸಚಿವರು	ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಹಾಸನ ಜಿಲ್ಲೆಯಲ್ಲಿ 43 ವಿದ್ಯಾರ್ಥಿ ನಿಲಯಗಳು ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದ್ದು, ವಿದ್ಯಾರ್ಥಿಗಳ ಉತ್ತಮ ವ್ಯಾಸಂಗ ಹಿತದೃಷ್ಟಿಯಿಂದ ವಿದ್ಯಾರ್ಥಿ ನಿಲಯಗಳನ್ನು ಮಂಜೂರು ಮಾಡುವಂತೆ ಹಾಗೂ ಸ್ವಂತ ಕಟ್ಟಡ ನಿರ್ಮಾಣಕ್ಕಾಗಿ ಅನುದಾನವನ್ನು ಬಿಡುಗಡೆಗೊಳಿಸುವಂತೆ ಜುಲೈ 2019ರಲ್ಲಿ ಪ್ರಸ್ತಾವನೆಯನ್ನು ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
ಆ)	ಹಾಗಿದ್ದಲ್ಲಿ, ಪ್ರಸ್ತುತ ವರ್ಷದಲ್ಲಿ ಎಷ್ಟು ವಸತಿ ನಿಲಯಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡಲು ಅಗತ್ಯವಿರುವ ಅನುದಾನವನ್ನು ಒದಗಿಸಲಾಗಿದೆ? (ಸಂಪೂರ್ಣ ಮಾಹಿತಿ ನೀಡುವುದು).	ಹಾಸನ ಜಿಲ್ಲೆಗೆ ಈಗಾಗಲೇ 16 ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣಕ್ಕೆ ಮಂಜೂರಾತಿ ನೀಡಿದ್ದು, ಇವುಗಳ ನಿರ್ಮಾಣ ಕಾರ್ಯವು ಪ್ರಗತಿಯಲ್ಲಿರುತ್ತವೆ. ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಇನ್ನುಳಿದ ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣವನ್ನು ಪ್ರತಿ ವರ್ಷ ಆಯವ್ಯಯದಲ್ಲಿ ಒದಗಿಸಲಾಗುವ ಅನುದಾನದ ಲಭ್ಯತೆಯನುಸಾರ ಆದ್ಯತೆ ಮೇರೆಗೆ ಪರಿಶೀಲಿಸಲಾಗುವುದು.

ಸಂಖ್ಯೆ:ಹಿಂವಕ 534 ಬಿಎಂಎಸ್ 2020

(ಬಿ.ಶ್ರೀರಾಮುಲು)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1369
ಸದಸ್ಯರ ಹೆಸರು : ಶ್ರೀ ವೆಂಕಟರೆಡ್ಡಿ ಮುದ್ನಾಳ್(ಯಾದಗಿರಿ)
ಉತ್ತರಿಸುವ ದಿನಾಂಕ : 24-09-2020
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

	ಪ್ರಶ್ನೆ	ಉತ್ತರ
ಅ)	ಯಾದಗಿರಿ ವಿಧಾನಸಭಾ ಕ್ಷೇತ್ರವ್ಯಾಪ್ತಿಯಲ್ಲಿ ಹೊಸದಾಗಿ ತಾಲ್ಲೂಕು ರಚನೆಯಾದ ನಂತರ ಹೋಬಳಿಗಳ ವಿಂಗಡನೆಯ ನಂತರ ವಿದ್ಯಾರ್ಥಿಗಳಿಗೆ ಪಿ.ಯು.ಸಿ ವ್ಯಾಸಂಗಕ್ಕೆ ಬಹಳ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ
ಆ)	ಹಾಗಿದ್ದಲ್ಲಿ, ಐಹೊಳೆ, ಬಿ ವಡಗೇರಾ, ದೋರನಾಹಳ್ಳಿಯಲ್ಲಿ ಪಿ.ಯು.ಸಿ ಕಾಲೇಜುಗಳನ್ನು ಪ್ರಾರಂಭಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರಗಳೊಂದಿಗೆ)	ರಾಜ್ಯದ 361 ಸರ್ಕಾರಿ ಪ್ರೌಢ ಶಾಲೆಗಳನ್ನು ಉನ್ನತೀಕರಿಸಿ, ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನಾಗಿ ಉನ್ನತೀಕರಿಸಲು ಪ್ರಸ್ತಾವನೆ ಇದ್ದು, ಅದರಲ್ಲಿ ಸದರಿ ಕ್ರೋಢೀಕೃತ ಪ್ರಸ್ತಾವನೆಯಲ್ಲಿ ಯಾದಗಿರಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಐಹೊಳೆ, ಬಿ ವಡಗೇರಾ, ದೋರನಾಹಳ್ಳಿಯಲ್ಲಿ ಪ್ರೌಢ ಶಾಲೆಗಳನ್ನು ಉನ್ನತೀಕರಿಸಿ, ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನಾಗಿ ಉನ್ನತೀಕರಿಸಲು ಪ್ರಸ್ತಾವನೆ ಇದ್ದು, ಸದರಿ ಕಾಲೇಜುಗಳನ್ನು ಉನ್ನತೀಕರಿಸಲು ಕೆಳಕಂಡ ಮಾಹಿತಿಗಳನ್ನು ಕ್ರೋಢೀಕರಿಸಲಾಗುತ್ತಿದ್ದು, ಸದರಿ ವಿವರಗಳನ್ನು ಪಡೆದ ನಂತರ ಆರ್ಥಿಕ ಇಲಾಖೆಯ ಸಹಮತಿಗೆ ಕಳುಹಿಸಲು ಕ್ರಮವಹಿಸಲಾಗುವುದು. 1) ಈ ಕಾಲೇಜುಗಳನ್ನು ಉನ್ನತೀಕರಿಸುವ ಬಗ್ಗೆ ಮಾನದಂಡಗಳು; 2) ಉನ್ನತೀಕರಿಸುವಂತಹ ಪ್ರದೇಶಗಳಲ್ಲಿ ಎಸ್.ಎಸ್.ಎಲ್.ಸಿ. ಯಿಂದ ಪದವಿ ಪೂರ್ವ ಶಿಕ್ಷಣಕ್ಕೆ ಬರುವ ವಿದ್ಯಾರ್ಥಿಗಳ ಪ್ರತಿಶತ(Average) ವಿವರಗಳು; 3) ಕೆ.ಪಿ.ಶಾಲೆಗಳಡಿ ಈ ಕಾಲೇಜುಗಳನ್ನು ಉನ್ನತೀಕರಿಸಲು ಇರುವ ಅವಕಾಶದ ಬಗ್ಗೆ ಮಾಹಿತಿ; 4) ಪದವಿ ಪೂರ್ವ ಕಾಲೇಜಿನಲ್ಲಿ ವಿದ್ಯಾರ್ಥಿಗಳ ಗರಿಷ್ಠ/ಕನಿಷ್ಠ ಸಂಖ್ಯೆಯ ವಿವರ; ಉಪನ್ಯಾಸಕರ ವಿವರಗಳ ಬಗ್ಗೆ ಸ್ಪಷ್ಟ ಸಂಖ್ಯೆಯ/ಮೊತ್ತದ ಮಾಹಿತಿ;

ಸಂಖ್ಯೆ: ಇಪಿ 124 ಡಿಜಿಡಬ್ಲ್ಯೂ 2019

(ಎಸ್.ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು.

ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ 7ನೇ ಅಧಿವೇಶನ)

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1374
2) ಸದಸ್ಯರ ಹೆಸರು	:	ಶ್ರೀ ಸಿದ್ದು ಸವದಿ (ತೇರದಾಳ)
3) ಉತ್ತರಿಸುವ ದಿನಾಂಕ	:	24-09-2020
4) ಉತ್ತರಿಸುವವರು	:	ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ತೇರದಾಳ ಕ್ಷೇತ್ರಕ್ಕೆ ಟ್ರೀ ಪಾರ್ಕ್ ನಿರ್ಮಾಣ ಮಾಡಲು ರೂ.2.00 ಕೋಟಿಗಳನ್ನು ಮಂಜೂರು ಮಾಡಿದ್ದು, ಈ ಪ್ರಸ್ತಾವನೆ ಯಾವ ಹಂತದಲ್ಲಿದೆ; (ಮಾಹಿತಿ ನೀಡುವುದು)	ತೇರದಾಳ ಮತಕ್ಷೇತ್ರದಲ್ಲಿ ವೃಕ್ಷೋದ್ಯಾನ ನಿರ್ಮಿಸಲು 2019-20ನೇ ಸಾಲಿನಲ್ಲಿ ಪ್ರಸ್ತಾವನೆಯನ್ನು ಸ್ವೀಕರಿಸಲಾಗಿದ್ದು, ಆರ್ಥಿಕ ವರ್ಷವು ಅಂತ್ಯದಲ್ಲಿದ್ದುದರಿಂದ ಈ ವೃಕ್ಷೋದ್ಯಾನ ನಿರ್ಮಿಸಲು ಕ್ರಮಕೈಗೊಂಡಿರುವುದಿಲ್ಲ. ಪ್ರಸಕ್ತ ಸಾಲಿನಲ್ಲಿ ಅನುದಾನ ಲಭ್ಯತೆಯ ಮೇರೆಗೆ ಈ ವೃಕ್ಷೋದ್ಯಾನ ನಿರ್ಮಾಣ ಕಾರ್ಯವನ್ನು ಪ್ರಾರಂಭಿಸಲಾಗುವುದು.
ಆ)	ತೇರದಾಳ ಕ್ಷೇತ್ರದಲ್ಲಿ ಅರಣ್ಯ ಪ್ರದೇಶದಲ್ಲಿ ಮನೆಗಳನ್ನು ನಿರ್ಮಿಸಿ ಜೀವನ ಸಾಗಿಸುವ ಕುಟುಂಬಗಳೆಷ್ಟು? (ಆಯಾ ಊರುಗಳ ಸಂಪೂರ್ಣ ಮಾಹಿತಿ ನೀಡುವುದು)	ತೇರದಾಳ ಕ್ಷೇತ್ರ ವ್ಯಾಪ್ತಿಯ ಅರಣ್ಯ ಪ್ರದೇಶದಲ್ಲಿ ಮನೆಗಳನ್ನು ನಿರ್ಮಿಸಿ ಜೀವನ ಸಾಗಿಸುತ್ತಿರುವ ಕುಟುಂಬಗಳ ಹಾಗೂ ಊರುಗಳ ವಿವರ ಈ ಕೆಳಗಿನಂತಿದೆ:

ಕ್ರ.ಸಂ	ಊರು	ಕುಟುಂಬಗಳ ಸಂಖ್ಯೆ
1	ತೇರದಾಳ	3,924
2	ಗೊಲಭಾವಿ	464
3	ಹೊಸೂರ	2,332
4	ಬನಹಟ್ಟಿ	3,679
5	ಆಸಂಗಿ	649
6	ಜಗದಾಳ	781
7	ಯಲ್ಲಟ್ಟಿ	550
8	ಕುಲಹಳ್ಳಿ	63
9	ಬಂಡಿಗಣಿ	11
10	ಮಧುರಖಂಡಿ	460
11	ಕಲ್ಲಳ್ಳಿ	303
	ಒಟ್ಟು	13,216

ಸಂಖ್ಯೆ: ಅಪಜೀ 50 ಎಫ್‌ಟಿಎಸ್ 2020

(ಆನಂದ್ ಸಿಂಗ್)
ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1376

ಸದಸ್ಯರ ಹೆಸರು : ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ್ (ಬೈಲಹೊಂಗಲ)

ಉತ್ತರಿಸುವ ದಿನಾಂಕ : 24.09.2020

ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
(ಅ)	ಬೆಳಗಾವಿ ಜಿಲ್ಲೆ ಬೈಲಹೊಂಗಲ ಮತ ಕ್ಷೇತ್ರದಲ್ಲಿ ಬರುವ ಸವದತ್ತಿ ತಾಲ್ಲೂಕಿನ ಮುರಗೋಡ ಗ್ರಾಮದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಅವಶ್ಯಕತೆ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
ಆ)	ಮುರಗೋಡ ಗ್ರಾಮದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾರಂಭಿಸಬೇಕೆಂದು ಆ ಭಾಗದ ಜನ ಪ್ರತಿನಿಧಿಗಳು ಮತ್ತು ಸಾರ್ವಜನಿಕರು ಮನವಿಯನ್ನು ಸಲ್ಲಿಸಿದ್ದು ನಿಜವಲ್ಲವೇ;	ಹೌದು
ಇ)	ಹಾಗಿದ್ದಲ್ಲಿ, ಮುರಗೋಡ ಗ್ರಾಮದಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜನ್ನು ಪ್ರಾರಂಭಿಸಲು ಸರ್ಕಾರ ಕ್ರಮ ಕೈಗೊಳ್ಳಲಾಗುವುದೇ?	ಇಲ್ಲ ಪ್ರಸುತ ಇರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಅತ್ಯಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಆದ್ಯತೆ ನೀಡುತ್ತಿರುವುದರಿಂದ ಹಾಗೂ ಪ್ರಸಕ್ತ ಸಾಲಿನಲ್ಲಿ ಕೋವಿಡ್-19 ಪ್ರಯುಕ್ತ ಆರ್ಥಿಕ ನಿರ್ಬಂಧ ಜಾರಿಯಲ್ಲಿರುವುದರಿಂದ ಹೊಸ ಕಾಲೇಜು ಪ್ರಾರಂಭಿಸುವ ಉದ್ದೇಶ ಇಲ್ಲದಿರುವುದರಿಂದ ಹೊಸ ಕಾಲೇಜು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.

ಕಡತ ಸಂಖ್ಯೆ: ಇಡಿ 146 ಹೆಚ್‌ಪಿಸಿ 2020

(ಡಾ: ಅಶ್ವಥ್ ನಾರಾಯಣ ಸಿ.ಎನ್)
ಉಪ ಮುಖ್ಯಮಂತ್ರಿಗಳು ಹಾಗೂ
ಉನ್ನತ ಶಿಕ್ಷಣ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1380
ಸದಸ್ಯರ ಹೆಸರು : ಶ್ರೀ. ರಾಜೇಗೌಡ ಟಿ.ಡಿ (ಶೃಂಗೇರಿ)
ಉತ್ತರಿಸಬೇಕಾದ ದಿನಾಂಕ : 24.09.2020
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ.	ಶೃಂಗೇರಿ ವಿಧಾನಸಭಾ ವ್ಯಾಪ್ತಿಯ ಚಿಕ್ಕ ಅಗ್ರಹಾರ ವಲಯ, ಅಲ್ದಾರ, ಬೈರಾಪುರ ಗ್ರಾಮಗಳು ಭದ್ರಾ ವನ್ಯ ಜೀವಿ ವ್ಯಾಪ್ತಿಗೊಳಪಡಲಿದ್ದು, ಇಲ್ಲಿ ಹೆಚ್ಚಾಗಿ ವಾಸಿಸುವ ಹರಿಜನ, ಗಿರಿಜನ ಮತ್ತು ಆದಿವಾಸಿಗಳು ಮಕ್ಕಳು ರಸ್ತೆ ಸಂಪರ್ಕವಿಲ್ಲದೇ ಪ್ರಾಥಮಿಕ, ಪ್ರೌಢಶಾಲೆ ಶಿಕ್ಷಣಕ್ಕಾಗಿ ಸುಮಾರು 20-25 ಕಿ.ಮೀ ದೂ ಕ್ರಮಿಸಬೇಕಾದ ಅನಿವಾರ್ಯತೆ ಇದ್ದು, ಇದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಶೃಂಗೇರಿ ವಿಧಾನಸಭಾ ವ್ಯಾಪ್ತಿಯ ಹರಿಜನ, ಗಿರಿಜನ ಮತ್ತು ಆದಿವಾಸಿಗಳ ಮಕ್ಕಳ ಪ್ರಾಥಮಿಕ ಶಿಕ್ಷಣಕ್ಕಾಗಿ 5 ಕಿ.ಮೀ ವ್ಯಾಪ್ತಿಯಲ್ಲಿ ಸರ್ಕಾರಿ ಪ್ರಾಥಮಿಕ ಶಾಲೆ, ಬೈರಾಪುರ ಹಾಗೂ ಆಲ್ದಾರ ಶಾಲೆಗಳು ಲಭ್ಯವಿರುತ್ತದೆ. ಸರ್ಕಾರಿ ಪ್ರೌಢಶಾಲೆ ಮತ್ತು ಸರ್ಕಾರಿ ಪದವಿ ಪೂರ್ವ ಕಾಲೇಜು ಉಂಬಳೇಬೈಲು, ಶಿವಮೊಗ್ಗ ತಾಲ್ಲೂಕಿನಲ್ಲಿ ಶಿಕ್ಷಣಕ್ಕಾಗಿ 5 ಕಿ.ಮೀ ವ್ಯಾಪ್ತಿಯಲ್ಲಿ ಲಭ್ಯವಿದೆ. ಮತ್ತು ಸಾರಿಗೆ ವ್ಯವಸ್ಥೆಯು ಸಹ ಲಭ್ಯವಿರುವುದರಿಂದ ವಿದ್ಯಾರ್ಥಿಗಳಿಗೆ ವ್ಯಾಸಂಗ ಮಾಡಲು ಅನುಕೂಲಕರವಾಗಿರುತ್ತದೆ.
ಆ.	ಈ ಭಾಗದಲ್ಲಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; (ವಿವರಗಳೊಂದಿಗೆ)	ಇಲ್ಲ
ಇ.	ಈ ಭಾಗದ ಮಕ್ಕಳ ಶೈಕ್ಷಣಿ ಅಭಿವೃದ್ಧಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು).	ಈ ಭಾಗದ ಶಾಲೆಗಳ ಮಕ್ಕಳಿಗೆ ಉಚಿತ ಶಿಕ್ಷಣ, ಪಠ್ಯಪುಸ್ತಕ, ಮಧ್ಯಾಹ್ನ ಉಪಹಾರ, ಕ್ಷೀರ ಭಾಗ್ಯ ಯೋಜನೆ ಹಾಗೂ ಉಚಿತ ಸಮವಸ್ತ್ರ ಒದಗಿಸಲಾಗುತ್ತಿದ್ದು, ಮಕ್ಕಳ ಶೈಕ್ಷಣಿಕ ಕಲಿಕೆಗೆ ಉತ್ತೇಜನ ನೀಡಲಾಗುತ್ತಿದೆ.

ಸಂಖ್ಯೆ: ಇಪಿ 64 ಎಲ್‌ಬಿಪಿ 2020

(ಎಸ್. ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ
ಸಕಾಲ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1382
ಮಾನ್ಯ ಸದಸ್ಯರ ಹೆಸರು	ಶ್ರೀ ಆನಂದ್ ಸಿದ್ದು ನ್ಯಾಮಗೌಡ (ಜಮಖಂಡಿ)
ಉತ್ತರಿಸಬೇಕಾದ ದಿನಾಂಕ	24.09.2020
ಉತ್ತರಿಸುವ ಸಚಿವರು	ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ಜಮಖಂಡಿ ಮತಕ್ಷೇತ್ರ ಪಂಚಮಶಾಲಿ ಸಮುದಾಯ ಭವನ ಕಟ್ಟಡಕ್ಕೆ ರೂ.50.00 ಲಕ್ಷ ಆದೇಶ ನೀಡಿ 2 ವರ್ಷವಾದರೂ ಇನ್ನುವರೆಗೆ 1 ನೇ ಕಂತಿನ ಹಣ ಬಿಡುಗಡೆ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿರುವುದಿಲ್ಲ.
ಆ)	ಸದರಿ ಸಮುದಾಯ ಭವನಕ್ಕೆ ಯಾವಾಗ ಹಣ ಬಿಡುಗಡೆ ಮಾಡಲು ಸರ್ಕಾರ ಕ್ರಮ ಕೈಗೊಂಡಿದೆ? (ಸಂಪೂರ್ಣ ಮಾಹಿತಿ ನೀಡುವುದು)	2020-21ನೇ ಸಾಲಿನಲ್ಲಿ ವಿವಿಧ ಸಮುದಾಯಗಳ ಅಭಿವೃದ್ಧಿ ಯೋಜನೆಯಡಿ ಮೊದಲನೇ ತ್ರೈಮಾಸಿಕದಲ್ಲಿ ರೂ.1000.00 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದ್ದು, ಸದರಿ ಅನುದಾನದಡಿ ಮರು ಬಿಡುಗಡೆ ಮಾಡಲು ಕ್ರಮವಹಿಸಲಾಗುವುದು.

ಸಂ:ಹಿಂವಕ 526 ಬಿಎಂಎಸ್ 2020

(ಬಿ.ಶ್ರೀರಾಮುಲು)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1385
ಮಾನ್ಯ ಸದಸ್ಯರ ಹೆಸರು	ಶ್ರೀ ವೆಂಕಟರಮಣಯ್ಯ ಟಿ (ದೊಡ್ಡಬಳ್ಳಾಪುರ)
ಉತ್ತರಿಸಬೇಕಾದ ದಿನಾಂಕ	24.09.2020
ಉತ್ತರಿಸುವ ಸಚಿವರು	ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ದೊಡ್ಡಬಳ್ಳಪುರ ತಾಲ್ಲೂಕಿನಲ್ಲಿ 2018-19 ಮತ್ತು 2019-20ನೇ ಸಾಲಿನಲ್ಲಿ ಹಿಂದುಳಿದ ವರ್ಗದ ರೈತರಿಗೆ ಮಂಜೂರಾಗಿರುವ ಕೊಳವೆ ಬಾವಿಗಳು ಎಷ್ಟು; ಕೊರೆದಿರುವ ಕೊಳವೆ ಬಾವಿಗಳು ಬಾಕಿ ಕೊರೆಯಬೇಕಾಗಿರುವ ಕೊಳವೆ ಬಾವಿಗಳು ಎಷ್ಟು; (ವಿವರ ನೀಡುವುದು)	2018-19 ಮತ್ತು 2019-20ಬೇ ಸಾಲಿನ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಗಂಗಾ ಕಲ್ಯಾಣ ಯೋಜನೆಯಡಿ ದೊಡ್ಡಬಳ್ಳಾಪುರ ವಿಧಾನಸಭಾ ಕ್ಷೇತ್ರಕ್ಕೆ ಮಂಜೂರು ಮಾಡಿದ, ಕೊರೆದ ಹಾಗೂ ಕೊರೆಯಿಸಲು ಬಾಕಿ ಇರುವ ಕೊಳವೆ ಬಾವಿಗಳ ವಿವರ ಈ ಕೆಳಕಂಡಂತಿದೆ. **ವರ್ಷ** / **ಮಂಜೂರು ಮಾಡಿದ ಸಂಖ್ಯೆ** / **ಕೊರೆದ ಸಂಖ್ಯೆ** / **ಕೊರೆಯಲು ಬಾಕಿ** 2018-19 / 14 / 11 / 3 2019-20 / 10 / 0 / 10
ಆ)	ಬಾಕಿ ಉಳಿದಿರುವ ಹಾಗೂ ಕೊಳವೆ ಬಾವಿಗಳನ್ನು ಯಾವ ಕಾಲಮಿತಿಯಲ್ಲಿ ಕೊರೆಯಲಯಲು ಸರ್ಕಾರ ಕ್ರಮಕೈಗೊಳ್ಳಲಿದೆ?	2019-20ನೇ ಸಾಲಿನ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಕೊಳವೆ ಬಾವಿಗಳನ್ನು ಕೊರೆಯಲು ನಿಗಮದಿಂದ ಆಹ್ವಾನಿಸಿದ್ದ ಟೆಂಡರ್‌ನ ಎಲ್-1 ಟೆಂಡರ್‌ದಾರರು ನಿಗಮದೊಂದಿಗೆ ದರ ಒಪ್ಪಂದ ಮಾಡಿಕೊಳ್ಳದೆ ಇದ್ದರಿಂದ ಟೆಂಡರ್ ರದ್ದು ಪಡಿಸಿ ದಿನಾಂಕ:**21.08.2020** ರಂದು ಮರು ಟೆಂಡರ್ ಆಹ್ವಾನಿಸಲಾಗಿದೆ. ಬಿಡ್‌ದಾರರು ಟೆಂಡರ್‌ನಲ್ಲಿ ಸಲ್ಲಿಸಿರುವ ತಾಂತ್ರಿಕ ಬಿಡ್‌ಗಳನ್ನು ತೆರೆಯಲಾಗಿರುತ್ತದೆ. ಟೆಂಡರ್ ಪ್ರಕ್ರಿಯೆಯನ್ನು ಪೂರ್ಣಗೊಳಿಸಿ ಕೊಳವೆ ಬಾವಿಗಳನ್ನು ಶೀಘ್ರವಾಗಿ ಕೊರೆಯಿಸುವ ನಿಟ್ಟಿನಲ್ಲಿ ಕ್ರಮವಹಿಸಲಾಗುತ್ತಿದೆ.

ಸಂ:ಹಿಂವಕ 525 ಬಿಎಂಎಸ್ 2020

(ಬಿ.ಶ್ರೀರಾಮುಲು)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

ಕರ್ನಾಟಕ ವಿಧಾನ ಸಭೆ	
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:	1387
ಮಾನ್ಯ ವಿಧಾನ ಸಭಾ ಸದಸ್ಯರ ಹೆಸರು:	ಶ್ರೀ ನಾಗೇಂದ್ರ ಬಿ. (ಬಳ್ಳಾರಿ)
ಉತ್ತರಿಸಬೇಕಾದ ದಿನಾಂಕ:	24-09-2020
ಉತ್ತರಿಸಬೇಕಾದ ಸಚಿವರು	ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಬಳ್ಳಾರಿ ವಿಮ್ಸ್ ಆಸ್ಪತ್ರೆಗಳಲ್ಲಿ ಮೂಲಭೂತ ಸೌಕರ್ಯಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಬಂದಿದ್ದಲ್ಲಿ; ಸರ್ಕಾರ ಯಾವ ಕ್ರಮ ಕೈಗೊಂಡಿದೆ; (ವಿವರ ನೀಡುವುದು)	ಬಳ್ಳಾರಿಯ ವಿಜಯನಗರ ವೈದ್ಯಕೀಯ ವಿಜ್ಞಾನ ಸಂಸ್ಥೆಗೆ ಎಂ.ಸಿ.ಐ. ನಿಯಮಾವಳಿಗಳನ್ವಯ ಮೂಲಭೂತ ಸೌಕರ್ಯಗಳ ಉನ್ನತೀಕರಣಕ್ಕಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ಸಂಯೋಗದಲ್ಲಿ ವೈದ್ಯಕೀಯ ಕಾಲೇಜಿನಲ್ಲಿ ಎಂ.ಬಿ.ಬಿ.ಎಸ್ ಪ್ರವೇಶಾತಿ 150 ರಿಂದ 250ಕ್ಕೆ ಹೆಚ್ಚಿಸಲು ಮೂಲಭೂತ ಸೌಕರ್ಯ ಒದಗಿಸುವ ಕಟ್ಟಡ ಕಾಮಗಾರಿಗಳ ನಿರ್ಮಾಣಕ್ಕಾಗಿ ಈ ಕೆಳಗಿನಂತೆ ಕಾಮಗಾರಿಗಳನ್ನು ಪ್ರಾರಂಭಿಸಲಾಗಿರುತ್ತದೆ. • Construction of Boys Hostel 300 Students Capacity - Rs.27.00 Cr • Construction of Girls Hostel 300 Students Capacity - Rs.27.00 Cr • Construction of Lecture Theater, Examination hall-Rs.48.00 Cr • Library building (Tender Accepting Committeeಯಲ್ಲಿ ಅಂಗೀಕರಿಸಲಾಗಿದೆ)
ಆ)	ವಿಮ್ಸ್ ಆಸ್ಪತ್ರೆಯಲ್ಲಿ ಸರಿಯಾದ ಮೂಲಭೂತ ಸೌಕರ್ಯಗಳು ಇಲ್ಲದೇ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರವು ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆಗಳ ಬಗ್ಗೆ ಗಮನ ಹರಿಸಿದೆಯೇ; (ವಿವರ ನೀಡುವುದು)	ಎಂ.ಸಿ.ಐ. ನಿಯಮಾವಳಿಗಳನ್ವಯ ವಿಮ್ಸ್ ಆಸ್ಪತ್ರೆಗೆ ಚಿಕಿತ್ಸೆಗಾಗಿ ಬರುವಂತಹ ರೋಗಿಗಳಿಗೆ ಅವಶ್ಯವಿರುವ ಮೂಲಭೂತ ಸೌಲಭ್ಯಗಳನ್ನು ಹಂತ ಹಂತವಾಗಿ ಒದಗಿಸಲು ಮತ್ತು ಉತ್ತಮ ಚಿಕಿತ್ಸೆಯನ್ನು ನೀಡಲು ಕ್ರಮವಹಿಸಲಾಗುತ್ತಿದೆ.

ಸಂಖ್ಯೆ: ಎಂಇಡಿ 333 ಎಂಪಿಎಸ್ 2020

(ಡಾ: ಕೆ. ಸುಧಾಕರ್)
ವೈದ್ಯಕೀಯ ಶಿಕ್ಷಣ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1398

ಸದಸ್ಯರ ಹೆಸರು : ಶ್ರೀ ಮಂಜುನಾಥ ಹೆಚ್.ಪಿ(ಹುಣಸೂರು)

ಉತ್ತರಿಸುವ ದಿನಾಂಕ : 24.09.2020

ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
(ಅ)	ಮೈಸೂರು ಜಿಲ್ಲೆ ಹುಣಸೂರು ತಾಲ್ಲೂಕಿನಲ್ಲಿ ಡಿ. ದೇವರಾಜ ಅರಸು ಇಂಜಿನಿಯರಿಂಗ್ ಕಾಲೇಜು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;	ಇಲ್ಲ
(ಆ)	ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳುವುದು? (ಮಾಹಿತಿ ನೀಡುವುದು)	ಉದ್ಭವಿಸುವುದಿಲ್ಲ

ಕಡತ ಸಂಖ್ಯೆ: ಇಡಿ 98 ಹೆಚ್‌ಪಿಟಿ 2020

(ಡಾ: ಅಶ್ವಥ್ ನಾರಾಯಣ ಸಿ.ಎನ್)
ಉಪ ಮುಖ್ಯಮಂತ್ರಿಗಳು ಹಾಗೂ
ಉನ್ನತ ಶಿಕ್ಷಣ ಸಚಿವರು

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1401

ಸದಸ್ಯರ ಹೆಸರು : ಶ್ರೀ ಸುಕುಮಾರ್ ಶೆಟ್ಟಿ ಬಿ.ಎಂ (ಬೈಂದೂರು)

ಉತ್ತರಿಸುವ ದಿನಾಂಕ : 24.09.2020

ಉತ್ತರಿಸುವ ಸಚಿವರು : ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಸಚಿವರು

ಕ್ರ. ಸಂ.	ಪ್ರಶ್ನೆಗಳು	ಉತ್ತರ
ಅ.	ಬೈಂದೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಬೈಂದೂರು ಮೆಸ್ಕಾಂ ಉಪವಿಭಾಗದ ಗೋಳಿಹೊಳೆ ಗ್ರಾಮದ ಕೊಲ್ಲೂರು ಹಾಲ್ಕಲ್ ಎಂಬಲ್ಲಿ 33/11 ಕೆವಿ ವಿದ್ಯುತ್ ಕೇಂದ್ರ ನಿರ್ಮಾಣ ಹಾಗೂ ಹೇರೂರಿನಿಂದ ಉದ್ದೇಶಿತ 33 ಕೆವಿ ಮಾರ್ಗ ವಿಸ್ತರಣೆಗೆ ಅರಣ್ಯ ಇಲಾಖೆ ಅನುಮತಿ ಕೋರಿ ಆನ್ ಲೈನ್ ಮುಖಾಂತರ ಅರ್ಜಿ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ (ವಿವರ ನೀಡುವುದು)	ಬಂದಿದೆ. ಕಂಬದಕೋಣೆಯಿಂದ ಕೊಲ್ಲೂರುವರೆಗೆ 33ಕೆವಿ ಹೆಚ್ ಟಿ ಲೈನ್ ನಿರ್ಮಾಣಕ್ಕೆ ಗೋಳಿಹೊಳೆ ಗ್ರಾಮ ಸ.ನಂ 164,167,44 ಮತ್ತು ಕಾಲ್ತೋಡು ಗ್ರಾಮದ ಸ.ನಂ. 346ರಲ್ಲಿ ಒಟ್ಟು 4.9106 ಹೆ. ಅರಣ್ಯ ಪ್ರದೇಶವನ್ನು ಉಪಯೋಗಿಸಲು ಅರಣ್ಯ ಸಂರಕ್ಷಣಾ ಕಾಯ್ದೆ, 1980ರಡಿ ಅನುಮೋದನೆ ಕೋರಿ ಕಾರ್ಯನಿರ್ವಾಹಕ ಇಂಜಿನಿಯರ್, ಮೆಸ್ಕಾಂ, ಕುಂದಾಪುರ ಇವರು ಕೇಂದ್ರ ಸರ್ಕಾರದ ವೆಬ್ ಪೋರ್ಟಲ್ ಮುಖಾಂತರ ಆನ್ ಲೈನ್ ಪ್ರಸ್ತಾವನೆ ಸಂಖ್ಯೆ: FP/KA/TRANS/46242/2020 ನ್ನು ದಿನಾಂಕ: 14-06-2020 ರಂದು ಸಲ್ಲಿಸಿರುತ್ತಾರೆ. ಸದರಿ ಪ್ರಸ್ತಾವನೆಯು ಅಪೂರ್ಣವಾಗಿದ್ದರಿಂದ, ಪೂರ್ಣ ಮಾಹಿತಿಯುಳ್ಳ ದಾಖಲೆಗಳೊಂದಿಗೆ ಮರು ಸಲ್ಲಿಸುವಂತೆ ದಿನಾಂಕ: 29-06-2020 ರಂದು ಅರಣ್ಯ ಇಲಾಖೆಯಿಂದ ಉಪಯೋಗಿ ಸಂಸ್ಥೆಯವರಿಗೆ ಸೂಚಿಸಲಾಗಿದೆ.
ಆ.	ಸದರಿ ವಿದ್ಯುತ್ ಕೇಂದ್ರಗಳನ್ನು ಸ್ಥಾಪಿಸಲು ಯಾವ ಕಾಲಮಿತಿಯೊಳಗೆ ಅನುಮತಿ ನೀಡಲಾಗುವುದು ಬೈಂದೂರು ಮೆಸ್ಕಾಂ ಉಪವಿಭಾಗದ ಹೇರೂನಿಂದ ಹಾಲ್ಕಲ್ ತನಕ 33 ಕೆವಿ ಮಾರ್ಗ ವಿಸ್ತರಣೆಯಿಂದ ಎಷ್ಟು ಮರಗಳ ಕಟಾವು ಮಾಡಬೇಕಾಗುತ್ತದೆ (ವಿವರ ನೀಡುವುದು)	ಕೇಂದ್ರ ಸರ್ಕಾರವು ಅರಣ್ಯ (ಸಂರಕ್ಷಣೆ) ಅಧಿನಿಯಮ, 1980ರಡಿ ಹೊರಡಿಸಿರುವ ಮಾರ್ಗಸೂಚಿಗಳನ್ವಯ ಎಲ್ಲಾ ಮಾನದಂಡಗಳನ್ನು ಪೂರೈಸಿದ ನಂತರ ಪ್ರಸ್ತಾವನೆಯನ್ನು ಸೂಕ್ತ ಶಿಫಾರಸ್ಸಿನೊಂದಿಗೆ ಕೇಂದ್ರ ಸರ್ಕಾರಕ್ಕೆ ಕಳುಹಿಸಲಾಗುವುದು. ತದನಂತರ ಕೇಂದ್ರ ಸರ್ಕಾರವು ಈ ಸಂಬಂಧ ಕ್ರಮವಹಿಸಬೇಕಿರುತ್ತದೆ. ಸದರಿ ಪ್ರಸ್ತಾವನೆಗೆ ಕೇಂದ್ರ ಸರ್ಕಾರದಿಂದ ಪೂರ್ವಾನುಮೋದನೆ ಪಡೆದ ನಂತರ ಮರಗಳ ಕಟಾವಣೆಗೆ ಅನುಮತಿ ನೀಡಬಹುದಾಗಿರುತ್ತದೆ. ಉಪಯೋಗಿ ಸಂಸ್ಥೆಯವರು ಉಪ ಅರಣ್ಯ ಸಂರಕ್ಷಣಾಧಿಕಾರಿ, ಕುಂದಾಪುರ ವಿಭಾಗ ಇವರ ಕಛೇರಿಗೆ ಪ್ರಸ್ತಾವನೆ ಸಲ್ಲಿಸಿ, ಯಾವ ಪ್ರದೇಶದಲ್ಲಿ ಎಷ್ಟು ಮರಗಳನ್ನು ಕಡಿಯಬೇಕು ಎನ್ನುವ ಬಗ್ಗೆ ಮರಗಳ ಎಣಿಕೆ ಪಟ್ಟಿಯನ್ನು ತಯಾರಿಸಿದ ನಂತರವೇ ಎಷ್ಟು ಮರಗಳನ್ನು ಕಡಿಯಬೇಕು ಎಂಬ ಬಗ್ಗೆ ನಿರ್ಧರಿಸಬಹುದಾಗಿರುತ್ತದೆ.

ಸಂಖ್ಯೆ: ಅಪಜೀ 69 ಎಫ್‌ಎಲ್‌ಎಲ್ 2020 (ಇ)

(ಆನಂದ್ ಸಿಂಗ್)

ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1403
ಸದಸ್ಯರ ಹೆಸರು : ಶ್ರೀ ಅಬ್ಬಯ್ಯ ಪ್ರಸಾದ್ (ಹುಬ್ಬಳ್ಳಿ-ಧಾರವಾಡ ಪೂರ್ವ)
ಉತ್ತರಿಸಬೇಕಾದ ದಿನಾಂಕ : 24.09.2020
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು

ಕ್ರಸ	ಪ್ರಶ್ನೆ	ಉತ್ತರ
ಅ)	2020ನೇ ಆಯವ್ಯಯದಲ್ಲಿ ಘೋಷಿಸಿರುವಂತೆ ರಾಜ್ಯದಲ್ಲಿ ಈಗಾಗಲೆ ಪೂರ್ವ ಪ್ರಾಥಮಿಕ ತರಗತಿಗಳಿಂದ ಪದವಿ ಪೂರ್ವತರಗತಿವರಿಗೆಒಂದೇ ಸೂರಿನಡಿ ಶಿಕ್ಷಣ ನೀಡಲು 276 ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಪ್ರಾರಂಭಿಸಲಾಗಿದ್ದು ಈ ಶಾಲೆಗಳ ಮೂಲಭೂತ ಸೌಕರ್ಯಗಳಿಗಾಗಿ 100ಕೋಟಿ ರೂ. ಅನುದಾನ ಒದಗಿಸಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು
ಆ)	ಬಂದಿದ್ದಲ್ಲಿ ಪ್ರಗತಿಯ ಕಾರ್ಯ ಯಾವ ಹಂತದಲ್ಲಿದೆ; ಎಷ್ಟು ಶಾಲೆಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗಿದೆ;	ಎಲ್ಲಾ 276 ಕರ್ನಾಟಕ ಪಬ್ಲಿಕ್ ಶಾಲೆಗಳಿಗೆ ಮೂಲಭೂತ ಸೌಕರ್ಯಗಳಿಗಾಗಿ ಮತ್ತು ವಾರ್ಷಿಕ ನಿರ್ವಹಣೆಗಾಗಿ ತಲಾ ರೂ.5ಲಕ್ಷ ಅನುದಾನವನ್ನು ಪ್ರತಿ ವರ್ಷ ನೀಡಲಾಗುತ್ತಿದೆ. 2020-21ರ ಆಯವ್ಯಯ ಘೋಷಣೆಯಂತೆ ರೂ.100 ಕೋಟಿ ಅನುದಾನಕ್ಕೆ ಪ್ರಥಮ ಹಂತದಲ್ಲಿ 50 ಕರ್ನಾಟಕ ಪಬ್ಲಿಕ್ ಶಾಲೆಗಳಿಗೆ ತಲಾ ರೂ.2.00 ಕೋಟಿಯಂತೆ ಅನುದಾನ ಒದಗಿಸಲು ಕ್ರಿಯಾಯೋಜನೆ ರೂಪಿಸಲಾಗಿದ್ದು, ಉತ್ತಮ ಗುಣಮಟ್ಟದ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಕ್ರಮವಹಿಸಲಾಗುವುದು. ಆರ್ಥಿಕ ಇಲಾಖೆಯಿಂದ ಅನುದಾನ ಬಿಡುಗಡೆ ನಿರೀಕ್ಷಿಸಲಾಗುತ್ತಿದೆ.
ಇ)	ಒದಗಿಸದೇ ಇದ್ದಲ್ಲಿ ಕಾರಣಗಳೇನು? (ಸಂಕ್ಷಿಪ್ತ ಮಾಹಿತಿ ನೀಡುವುದು)	1. ಕೋವಿಡ್-19 ವಿಷಮ ಸ್ಥಿತಿಯಿಂದ ಆರ್ಥಿಕ ನಿರ್ಬಂಧತೆ ಇರುವುದರಿಂದ ಆರ್ಥಿಕ ಇಲಾಖೆಯಿಂದ ಸದರಿ ಕ್ರಿಯಾಯೋಜನೆಗೆ ಅನುದಾನ ಬಿಡುಗಡೆಯಾಗಿರುವುದಿಲ್ಲ. 2. ಅನುದಾನದ ಲಭ್ಯತೆಗೆ ಅನುಗುಣವಾಗಿ ಹಂತ ಹಂತವಾಗಿ ಎಲ್ಲಾ ಕರ್ನಾಟಕ ಪಬ್ಲಿಕ್ ಶಾಲೆಗಳಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಕ್ರಮವಹಿಸಲಾಗುತ್ತಿದೆ.

ಇಪಿ 179 ಯೋಸಕ 2020

(ಎಸ್.ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1408
ಸದಸ್ಯರ ಹೆಸರು : ಶ್ರೀ ದೊಡ್ಡಗೌಡರ ಮಹಾಂತೇಶ ಬಸವಂತರಾಯ (ಕಿತ್ತೂರು)
ಉತ್ತರಿಸುವ ದಿನಾಂಕ : 24.09.2020
ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ಗ್ರಾಮೀಣ ಬಡಮಕ್ಕಳಿಗೆ ಉನ್ನತ ಶಿಕ್ಷಣ ದೊರಕುವ ನಿಟ್ಟಿನಲ್ಲಿ ಪದವಿ ಮಹಾವಿದ್ಯಾಲಯಗಳ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
ಆ)	ಬಂದಿದ್ದಲ್ಲಿ, ಕಿತ್ತೂರು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ 20 ಸಾವಿರ ಜನಸಂಖ್ಯೆ ಇರುವ ಎಂ.ಕೆ.ಹುಬ್ಬಳ್ಳಿ ಪಟ್ಟಣ ಪಂಚಾಯತಿ ವ್ಯಾಪ್ತಿಯಲ್ಲಿ ಸಾವಿರಾರು ಬಡ ಮಕ್ಕಳ ಹಿತದೃಷ್ಟಿಯಿಂದ ಪದವಿ ಮಹಾವಿದ್ಯಾಲಯ ಆರಂಭಿಸದಿರಲು ಕಾರಣವೇನು;	ಎಂ.ಕೆ.ಹುಬ್ಬಳ್ಳಿಯಿಂದ 20 ಕಿ.ಮೀ ಅಂತರದ ಕಿತ್ತೂರಿನಲ್ಲಿ 01 ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಹಾಗೂ 01 ಖಾಸಗಿ ಅನುದಾನಿತ ಕೆ.ಎಸ್.ವಿ.ವಿ ಸಂಘ ಕಲಾ ಮತ್ತು ವಾಣಿಜ್ಯ ಕಾಲೇಜು ಇರುತ್ತದೆ. 23 ಕಿ.ಮೀ ಅಂತರದ ಖಾನಾಪುರದಲ್ಲಿ 01 ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಮತ್ತು 01 ಮರಾಠಾ ಮಂಡಲ ಕಲಾ ಮತ್ತು ವಾಣಿಜ್ಯ ಕಾಲೇಜು ಇರುತ್ತವೆ. ಪ್ರಸ್ತುತ ಇರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಅತ್ಯಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಆದ್ಯತೆ ನೀಡುತ್ತಿರುವುದರಿಂದ ಹಾಗೂ ಪ್ರಸಕ್ತ ಸಾಲಿನಲ್ಲಿ ಕೋವಿಡ್-19 ಪ್ರಯುಕ್ತ ಆರ್ಥಿಕ ನಿರ್ಬಂಧ ಜಾರಿಯಲ್ಲಿರುವುದರಿಂದ ಹೊಸ ಸರ್ಕಾರಿ ಪ್ರಥಮ ದರ್ಜೆ ಕಾಲೇಜನ್ನು ಪ್ರಾರಂಭಿಸಲಾಗುತ್ತಿಲ್ಲ.
ಇ)	ಕೂಡಲೆ ಎಂ.ಕೆ.ಹುಬ್ಬಳ್ಳಿ ಪಟ್ಟಣ ಪಂಚಾಯತಿ ವ್ಯಾಪ್ತಿಯಲ್ಲಿ ಸರ್ಕಾರಿ ಪದವಿ ಮಹಾವಿದ್ಯಾಲಯ ಆರಂಭಿಸಲು ಸರ್ಕಾರದ ಕ್ರಮವೇನು;	ಉದ್ಭವಿಸುವುದಿಲ್ಲ.
ಈ)	ಯಾವ ಕಾಲಮಿತಿಯಲ್ಲಿ ಎಂ.ಕೆ.ಹುಬ್ಬಳ್ಳಿ ಪಟ್ಟಣ ಪಂಚಾಯತಿ ವ್ಯಾಪ್ತಿಯಲ್ಲಿ ಸರ್ಕಾರಿ ಪದವಿ ಮಹಾವಿದ್ಯಾಲಯ ಆರಂಭಿಸಲು ಕ್ರಮ ಕೈಗೊಳ್ಳಲಾಗುವುದು;	ಉದ್ಭವಿಸುವುದಿಲ್ಲ
ಉ)	ಹೌದಾದಲ್ಲಿ, ಪ್ರಸ್ತಾವನೆ ಯಾವ ಹಂತದಲ್ಲಿದೆ?	ಉದ್ಭವಿಸುವುದಿಲ್ಲ

ಸಂಖ್ಯೆ: ಇಡಿ 151 ಹೆಚ್‌ಪಿಸಿ 2020

(ಡಾ: ಅಶ್ವಥ್ ನಾರಾಯಣ ಸಿ.ಎನ್)
ಉಪ ಮುಖ್ಯಮಂತ್ರಿ ಹಾಗೂ
ಉನ್ನತ ಶಿಕ್ಷಣ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1409
ಮಾನ್ಯ ಸದಸ್ಯರ ಹೆಸರು : ಶ್ರೀ ದೊಡ್ಡಗೌಡರ ಮಹಾಂತೇಶ ಬಸವಂತರಾಯ (ಕಿತ್ತೂರು)
ಉತ್ತರಿಸಬೇಕಾದ ದಿನಾಂಕ : 24-9-2020
ಉತ್ತರಿಸುವ ಸಚಿವರು : ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
1	ಕಿತ್ತೂರು ವಿಧಾನಸಭಾ ಕ್ಷೇತ್ರದ ನೇಸರಗಿ ಹೋಬಳಿ ಕೇಂದ್ರವಾಗಿದ್ದು, ಪ್ರಾಥಮಿಕ ಆರೋಗ್ಯ ಕೇಂದ್ರ ನಿರ್ಮಾಣಕ್ಕೆ ಸರಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುವುದು ಯಾವ ಹಂತದಲ್ಲಿದೆ;	ಕಿತ್ತೂರು ವಿಧಾನಸಭಾ ಕ್ಷೇತ್ರದ ನೇಸರಗಿ ಹೋಬಳಿಯಲ್ಲಿ ಪ್ರಸ್ತುತ ಹೆರಿಗೆ ಆಸ್ಪತ್ರೆ ಕಾರ್ಯನಿರ್ವಹಿಸುತ್ತಿದ್ದು, ಪ್ರಾಥಮಿಕ ಆರೋಗ್ಯ ಕೇಂದ್ರದ ನಿರ್ಮಾಣದ ಕುರಿತು ಸರ್ಕಾರದಲ್ಲಿ ಯಾವುದೇ ಪ್ರಸ್ತಾವನೆ ಇರುವುದಿಲ್ಲ.
2	ಈ ಹಿಂದೆ 2018-19 ನೇ ಸಾಲಿನಲ್ಲಿ ಸ್ವತ: ಆರೋಗ್ಯ ಸಚಿವರೇ ಆಸ್ಪತ್ರೆ ನಿರ್ಮಾಣಕ್ಕೆ ಅಧಿಕಾರಗಳಿಗೆ ಸೂಚಿಸಿರುವುದು ಇಲಾಖೆ ಗಮನದಲ್ಲಿದೆಯೇ;	ಇದೆ.
3	ಇಲ್ಲಿಯವರೆಗೆ ಈ ಕುರಿತು ಕ್ರಮವಾಗದಿರಲು ಕಾರಣವೇನು;	ಹಾಲಿ ಇರುವ ಹೆರಿಗೆ ಆಸ್ಪತ್ರೆಯನ್ನು ಮೇಲ್ದರ್ಜೆಗೇರಿಸಲು ಸ್ಥಳದ ಅಭಾವದಿಂದ ಕ್ರಮವಹಿಸಲು ವಿಳಂಬವಾಗಿರುತ್ತದೆ.
4	ಯಾವ ಕಾಲಮಿತಿಯಲ್ಲಿ ನೇಸರಗಿ ಗ್ರಾಮದಲ್ಲಿ ಸರ್ಕಾರಿ ಆಸ್ಪತ್ರೆ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಲಾಗುವುದು?	ಸೂಕ್ತ ಜಮೀನು ದೊರೆತ ನಂತರ ಕ್ರಮಕೈಗೊಳ್ಳಲಾಗುವುದು.

ಆಕುಕ 103 ಎಸ್.ಎಂ.ಎಂ. 2020

(ಬಿ. ಶ್ರೀರಾಮುಲು)

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1411

ಸದಸ್ಯರ ಹೆಸರು : ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಯಲಬುರ್ಗಾ)

ಉತ್ತರಿಸುವ ದಿನಾಂಕ : 24.09.2020

ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
(ಅ)	ಕೊಪ್ಪಳ ಜಿಲ್ಲೆಯ ಯಲಬುರ್ಗಾ ವಿಧಾನಸಭಾ ಕ್ಷೇತ್ರದ ತಳಕಲ್ ಭಾಗದಲ್ಲಿ ಕಾಮಗಾರಿ ಹಂತದಲ್ಲಿರುವ ಕೌಶಾಲ್ಯಾಭಿವೃದ್ಧಿ ಕೇಂದ್ರಕ್ಕೆ ಮಂಜೂರು ಮಾಡಲಾದ ಒಟ್ಟು ಕಾಮಗಾರಿಯ ಮೊತ್ತವೆಷ್ಟು; (ವಿವರ ನೀಡುವುದು)	ವಿಶ್ವೇಶ್ವಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ ವತಿಯಿಂದ ಸ್ನಾತಕೋತ್ತರ ಕೇಂದ್ರ ಮತ್ತು ವೃತ್ತಿ ಕೌಶಲ್ಯ ಅಭಿವೃದ್ಧಿ ಕೇಂದ್ರದಲ್ಲಿ ಕಟ್ಟಡಗಳನ್ನು ನಿರ್ಮಿಸಲು ಒಟ್ಟು ರೂ.95.00 ಕೋಟಿಗಳ ಮೊತ್ತಕ್ಕೆ ಅನುಮೋದಿಸಿದೆ. ಇದರಲ್ಲಿ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ವತಿಯಿಂದ ರೂ.70.00 ಕೋಟಿ ಹಾಗೂ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಕೇಂದ್ರ ಕಲಬುರಗಿ ವತಿಯಿಂದ ರೂ.25.00 ಕೋಟಿಗಳಾಗಿರುತ್ತದೆ.
(ಆ)	ಸದರಿ ಕೇಂದ್ರಕ್ಕೆ ಇದುವರೆಗೂ ಬಿಡುಗಡೆ ಮಾಡಲಾದ ಅನುದಾನವೆಷ್ಟು;	ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ ವತಿಯಿಂದ ಇಲ್ಲಿಯವರೆಗೆ ಒಟ್ಟು ರೂ.55.50 ಕೋಟಿ ಹಾಗೂ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಕೇಂದ್ರ, ಕಲಬುರಗಿ ವತಿಯಿಂದ ಒಟ್ಟು ರೂ.25.00 ಕೋಟಿ ಹೀಗೆ ಒಟ್ಟು ರೂ.80.50 ಕೋಟಿಗಳನ್ನು ಬಿಡುಗಡೆಗೊಳಿಸಲಾಗಿದೆ.
(ಇ)	ಕೌಶಲ್ಯಾಭಿವೃದ್ಧಿ ಕೇಂದ್ರ ಕಾಮಗಾರಿ ಮುಕ್ತಾಯಗೊಳಿಸಿ ಲೋಕಾರ್ಪಣೆಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;	ಕೊಪ್ಪಳ ಜಿಲ್ಲೆಯ ಕೂಕನೂರು ತಾಲ್ಲೂಕಿನ ತಳಕಲ್‌ನಲ್ಲಿ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಸ್ನಾತಕೋತ್ತರ ಕೇಂದ್ರ ಮತ್ತು ಇತರೆ ಕಟ್ಟಡಗಳ ನಿರ್ಮಾಣ ಮಾಡುವ ಕಾಮಗಾರಿಗಳು ಈಗಾಗಲೇ ಪೂರ್ಣಗೊಳ್ಳುವ ಹಂತಕ್ಕೆ ಬಂದಿದ್ದು, ಶೀಘ್ರದಲ್ಲಿ ಸದರಿ ಕೇಂದ್ರವನ್ನು ಲೋಕಾರ್ಪಣೆ ಮಾಡಲಾಗುವುದು.
(ಈ)	ಸದರಿ ಕೇಂದ್ರಕ್ಕೆ ಇನ್ನೂ ಹೆಚ್ಚಿನ ಅನುದಾನದ ಬೇಡಿಕೆಯನ್ನೇದಾದರೂ ಸರ್ಕಾರ ಸ್ವೀಕರಿಸಿದೆಯೇ;	ಕೌಶಲ್ಯಾಭಿವೃದ್ಧಿಗೆ ಸಂಬಂಧಪಟ್ಟ ಕಾಮಗಾರಿಗೆ ಇನ್ನೂ ರೂ.25.00 ಕೋಟಿ ಅನುದಾನದ ಅವಶ್ಯಕತೆ ಇರುವ ಬಗ್ಗೆ ಪ್ರಸ್ತಾವನೆ ಸ್ವೀಕೃತವಾಗಿದೆ.
(ಉ)	ಹಾಗಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡ ಕ್ರಮವೇನು?	ಪ್ರಸಕ್ತ ಸಾಲಿನಲ್ಲಿ ಕೋವಿಡ್-19 ಪ್ರಯುಕ್ತ ಆರ್ಥಿಕ ನಿರ್ಬಂಧ ಜಾರಿಯಲ್ಲಿರುವುದರಿಂದ ಹೆಚ್ಚುವರಿ ಅನುದಾನ ಒದಗಿಸಲಾಗುತ್ತಿಲ್ಲ.

ಕಡತ ಸಂಖ್ಯೆ: ಇಡಿ 105 ಹೆಚ್‌ಪಿಟಿ 2020

(ಡಾ: ಅಶ್ವಥ್ ನಾರಾಯಣ ಸಿ.ಎನ್)
ಉಪ ಮುಖ್ಯಮಂತ್ರಿಗಳು ಹಾಗೂ
ಉನ್ನತ ಶಿಕ್ಷಣ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1414

ಸದಸ್ಯರ ಹೆಸರು : ಶ್ರೀ ಸುಬ್ಬಾರೆಡ್ಡಿ ಎಸ್.ಎನ್

ಉತ್ತರಿಸುವ ದಿನಾಂಕ : 24-09-2020

ಉತ್ತರಿಸುವ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಇಲಾಖಾ ಸಚಿವರು.

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಬಾಗೇಪಲ್ಲಿ ತಾಲ್ಲೂಕು ಗೂಳೂರು ಹೋಬಳಿಯ ನಾರಾಯಣಸ್ವಾಮಿ ಕೋಟೆ ಗ್ರಾಮಕ್ಕೆ ಹಿಂದುಳಿದ ವರ್ಗಗಳ ಮೊರಾರ್ಜಿ ದೇಸಾಯಿ ವಸತಿ ಶಾಲೆ ಪ್ರಾರಂಭ ಮಾಡಲು 2016 ರಲ್ಲಿ ಮಂಜೂರಾತಿ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು
ಆ)	ಹಾಗಿದ್ದಲ್ಲಿ ಈ ಶಾಲೆ ಪ್ರಾರಂಭದ ಪ್ರಸ್ತಾವನೆ ಯಾವ ಹಂತದಲ್ಲಿದೆ;	ಚಿಕ್ಕಬಳ್ಳಾಪುರ ಜಿಲ್ಲೆಯ, ಬಾಗೇಪಲ್ಲಿ ತಾಲ್ಲೂಕು, ಹೋಬಳಿಯ ನಾರಾಯಣಸ್ವಾಮಿ ಕೋಟೆ ಗ್ರಾಮಕ್ಕೆ ಮಂಜೂರಾದ ಹಿಂದುಳಿದ ವರ್ಗಗಳ ಮೊರಾರ್ಜಿ ದೇಸಾಯಿ ವಸತಿ ಶಾಲೆಯನ್ನು ಪ್ರಾರಂಭಿಸಲು ಅಗತ್ಯ ಬೋಧಕ/ ಬೋಧಕೇತರ ಹುದ್ದೆಗಳನ್ನು ಮಂಜೂರು ಮಾಡುವ ಪ್ರಸ್ತಾವ ಪರಿಶೀಲನೆಯಲ್ಲಿದೆ.
ಇ)	ಸರ್ಕಾರ ಆದೇಶ ನೀಡಿ 4 ವರ್ಷಗಳು ಕಳೆದರೂ ಇದುವರೆವಿಗೂ ಶಾಲೆ ಪ್ರಾರಂಭ ಮಾಡದಿರಲು ಕಾರಣಗಳೇನು; (ವಿವರ ನೀಡುವುದು)	
ಈ)	ಸದರಿ ಶಾಲೆಯನ್ನು ಯಾವಾಗ ಪ್ರಾರಂಭ ಮಾಡಲಾಗುವುವು?	ಅಗತ್ಯ ಬೋಧಕ/ ಬೋಧಕೇತರ ಹುದ್ದೆಗಳನ್ನು ಸೃಜನೆಯಾದ ನಂತರ ಪ್ರಾರಂಭಿಸಲಾಗುವುದು.

ಸಂಖ್ಯೆ: ಸಕಇ 300 ಮೊದೇಶಾ 2020

(ಗೋವಿಂದ ಎಂ. ಕಾರಜೋಳ)
ಉಪ ಮುಖ್ಯಮಂತ್ರಿಗಳು, ಲೋಕೋಪಯೋಗಿ ಹಾಗೂ
ಸಮಾಜ ಕಲ್ಯಾಣ ಇಲಾಖಾ ಸಚಿವರು.

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1417
ಸದಸ್ಯರ ಹೆಸರು	ಶ್ರೀ ರಾಮಲಿಂಗಾ ರೆಡ್ಡಿ (ಬಿ.ಟಿ.ಎಂ ಲೇಔಟ್)
ಉತ್ತರಿಸಬೇಕಾದ ದಿನಾಂಕ	24-09-2020
ಉತ್ತರಿಸಬೇಕಾದ ಸಚಿವರು	ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು

ಪ್ರಶ್ನೆ	ಉತ್ತರ
ಅ) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ಆನ್‌ಲೈನ್ ಶಿಕ್ಷಣವನ್ನು ದೂರದರ್ಶನ ಚಾನಲ್ ಮೂಲಕ ವಿದ್ಯಾಗಮ ನಿರಂತರ ಕಲಿಕಾ ಕಾರ್ಯಕ್ರಮವನ್ನು ಪರಿಣಾಮಕಾರಿಯಾಗಿ ಅನುಷ್ಠಾನವಾಗಿದೆಯೇ;	ಹೌದು, ಅನುಷ್ಠಾನವಾಗಿದೆ.
ಆ) ಈ ಕಾರ್ಯಕ್ರಮಕ್ಕೆ ಬಿಡುಗಡೆಯಾದ ಅನುದಾನವೆಷ್ಟು ಹಾಗೂ ವೆಚ್ಚವಾದ ಅನುದಾನವೆಷ್ಟು;	8, 9 ಹಾಗೂ 10ನೇ ತರಗತಿಗಳ ವೀಡಿಯೋ ಪಾಠಗಳ ನಿರ್ಮಾಣ ಹಾಗೂ ಪ್ರಸಾರ ವೆಚ್ಚಕ್ಕೆ ಸಂಬಂಧಿಸಿದಂತೆ ಸರ್ಕಾರದಿಂದ ರೂ.1.60 ಕೋಟಿ ಅನುದಾನ ಅನುಮೋದನೆಯಾಗಿದೆ. ಕಾರ್ಯಕ್ರಮ ಇನ್ನೂ ಜಾರಿಯಲ್ಲಿರುತ್ತದೆ. ಕಾರ್ಯಕ್ರಮ ಮುಕ್ತಾಯವಾದ ನಂತರ ಅಂತಿಮ ವೆಚ್ಚ ತಿಳಿದು ಬರಲಿದೆ.
ಇ) ಸದರಿ ಕಾರ್ಯಕ್ರಮದಿಂದ ಬಡ ಮತ್ತು ದುರ್ಬಲ ವರ್ಗದವರಿಗೆ ಸಮಸ್ಯೆಯಾಗಿಲ್ಲವೇ? (ಅಧ್ಯಯನ ನಡೆಸಿದ ವಿವರ ನೀಡುವುದು)	ಇಲಾಖೆಯಿಂದ ನಡೆಸಿದ ಸಮೀಕ್ಷೆಯಲ್ಲಿ ಶೇ.95% ರಷ್ಟು ವಿದ್ಯಾರ್ಥಿಗಳು ದೂರದರ್ಶನದ ಸೌಲಭ್ಯವನ್ನು ಹೊಂದಿರುತ್ತಾರೆ. ಸದರಿ ಕಾರ್ಯಕ್ರಮದಿಂದ ಬಡ ಹಾಗೂ ದುರ್ಬಲ ವರ್ಗದವರಿಗೆ ಯಾವುದೇ ರೀತಿಯ ಆರ್ಥಿಕ ಹೊರೆ ಉಂಟಾಗಿರುವುದಿಲ್ಲ. ದೂರದರ್ಶನ ಪ್ರಸಾರಕ್ಕೆ ಇಲಾಖಾ ವತಿಯಿಂದ ವೆಚ್ಚ ಭರಿಸಲಾಗುತ್ತಿದೆ. ಟಿ.ವಿ ಹೊಂದಿಲ್ಲದ ವಿದ್ಯಾರ್ಥಿಗಳಿಗೆ ನೆರೆಹೊರೆಯವರ, ಗ್ರಾಮಸ್ಥರ ಸಹಕಾರದೊಂದಿಗೆ ವೀಕ್ಷಿಸಲು ಸೂಚಿಸಿದೆ.

ಇಡಿ 119 ಪಿಜಿಸಿ 2020

[ಎಸ್.ಸುರೇಶ್ ಕುಮಾರ್]
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ
ಸಕಾಲ ಸಚಿವರು.

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1420
ಮಾನ್ಯ ಸದಸ್ಯರ ಹೆಸರು	:	ಶ್ರೀ ಶಿವಶಂಕರ ರೆಡ್ಡಿ ಎನ್.ಹೆಚ್ (ಗೌರಿಬಿದನೂರು)
ಉತ್ತರಿಸುವ ದಿನಾಂಕ	:	24.09.2020
ಉತ್ತರಿಸುವ ಸಚಿವರು	:	ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

<table>
<tr><th>ಕ್ರ.ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ಗೌರಿಬಿದನೂರು ಪಟ್ಟಣದಲ್ಲಿರುವ ಕೋಟೆ ಪ್ರೌಢ ಶಾಲೆ, ಮುನ್ಸಿಪಲ್ ಪ್ರೌಢ ಶಾಲೆ ಮತ್ತು ಪಿ.ಯು ಕಾಲೇಜುಗಳಲ್ಲಿ ಹೆಚ್ಚಿನ ಸಂಖ್ಯೆ ವಿದ್ಯಾರ್ಥಿಗಳು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿದ್ಯಾರ್ಥಿಗಳ ಸಂಖ್ಯೆ ಸಮೇತ ವಿವರ ನೀಡುವುದು)</td><td>ಬಂದಿದೆ.
ವಿದ್ಯಾರ್ಥಿಗಳ ಸಂಖ್ಯೆಯ ವಿವರ:
<table>
<tr><th>ಶಾಲೆ/ಕಾಲೇಜು</th><th>ಹೆಣ್ಣು</th><th>ಗಂಡು</th><th>ಒಟ್ಟು</th></tr>
<tr><td>ಹೆಣ್ಣು ಮಕ್ಕಳ ಪ್ರೌಢ ಶಾಲೆ, ಕೋಟೆ. ಗೌರಿಬಿದನೂರು</td><td>526</td><td>0</td><td>526</td></tr>
<tr><td>ಮುನ್ಸಿಪಲ್ ಪ್ರೌಢ ಶಾಲೆ, ಗೌರಿಬಿದನೂರು</td><td>224</td><td>559</td><td>783</td></tr>
<tr><td>ಪದವಿ ಪೂರ್ವ ಕಾಲೇಜು, ಗೌರಿಬಿದನೂರು</td><td>857</td><td>810</td><td>1667</td></tr>
</table></td></tr>
<tr><td>ಆ</td><td>ಹೆಚ್ಚಿನ ಸಂಖ್ಯೆಯಲ್ಲಿರುವ ವಿದ್ಯಾರ್ಥಿಗಳ ಸಮಸ್ಯೆಯನ್ನು ಸುಧಾರಿಸಲು ವಿಶೇಷವಾಗಿ ಕೋಟೆ ಪ್ರೌಢ ಶಾಲೆಯನ್ನು, ಹೆಣ್ಣು ಮಕ್ಕಳ ಶಾಲೆ ಮತ್ತು ಪಿ.ಯು ಕಾಲೇಜನ್ನಾಗಿ ಪರಿವರ್ತಿಸಲು ಸಾಧ್ಯವಿಲ್ಲವೇ?</td><td>ಸರ್ಕಾರಿ ಪ್ರೌಢಶಾಲೆ, ಕೋಟೆ, ಗೌರಿಬಿದನೂರು ಈ ಶಾಲೆಯನ್ನು ಉನ್ನತೀಕರಿಸಿ ಪದವಿ ಪೂರ್ವ ಕಾಲೇಜನ್ನಾಗಿ ಮಂಜೂರಾತಿ ನೀಡಲು ಕ್ಷೇತ್ರ ಇಲಾಖೆಯಿಂದ ನಿರ್ದೇಶಕರು,ಪದವಿ ಪೂರ್ವ ಶಿಕ್ಷಣ ಇಲಾಖೆಯಲ್ಲಿ ಪ್ರಸ್ತಾವನೆ ಸ್ವೀಕೃತವಾಗಿ,ಪರಿಶೀಲನೆಯಲ್ಲಿರುತ್ತದೆ.</td></tr>
</table>

ಸಂ: ಇಪಿ 271 ಎಸ್‌ಇಎಸ್ 2020

S. S—

(ಎಸ್.ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು

ಕರ್ನಾಟಕ ವಿಧಾನ ಸಭೆ

1. ಚುಕ್ಕೆ ಗುರುತಿಲ್ಲದಪ್ರಶ್ನೆ ಸಂಖ್ಯೆ : 1422
2. ಮಾನ್ಯ ಸದಸ್ಯರ ಹೆಸರು : ಶ್ರೀ ಬಂಡೆಪ್ಪ ಖಾಶೆಂಪೂರ್ (ಬೀದರ್ ದಕ್ಷಿಣ)
3. ಉತ್ತರಿಸುವವರು : ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು

ಕ್ರ. ಸಂ.	ಪ್ರಶ್ನೆ	ಇಲಾಖಾ ಮಾಹಿತಿ
1	ಕೋವಿಡ್ ಸಾಂಕ್ರಾಮಿಕ ರೋಗದ ಪೂರ್ವದಲ್ಲಿ ಬೀದರ್ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಖಾನೆಗಳೆಷ್ಟು ಹಾಗೂ ಅದರಲ್ಲಿ ಕೆಲಸ ಮಾಡುತ್ತಿರುವ ಕಾರ್ಮಿಕರ ಸಂಖ್ಯೆ ಎಷ್ಟು; (ವಿವರ ನೀಡುವುದು)	ಕೋವಿಡ್ ಸಾಂಕ್ರಾಮಿಕ ರೋಗದ ಪೂರ್ವದಲ್ಲಿ ಬೀದರ್ ಜಿಲ್ಲೆಯಲ್ಲಿ 98 ಕಾರ್ಖಾನೆಗಳ ಕಾಯ್ದೆಯಡಿಯಲ್ಲಿ ನೋಂದಾಯಿತ ಕಾರ್ಖಾನೆಗಳಿದ್ದು, ಅದರಲ್ಲಿ 6596 ಪುರುಷ ಮತ್ತು 706 ಮಹಿಳಾ ಕಾರ್ಮಿಕರು ಕೆಲಸ ಮಾಡುತ್ತಿದ್ದರು.
2	ಸದರಿ ರೋಗದಿಂದ ಬೀದರ್ ಜಿಲ್ಲೆಯಲ್ಲಿ ಎಷ್ಟು ಕಾರ್ಖಾನೆಗಳು ಮುಚ್ಚಲಾಗಿದೆ ಹಾಗೂ ಕೆಲಸ ಕಳೆದುಕೊಂಡಿರುವ ಕಾರ್ಮಿಕರ ಸಂಖ್ಯೆ ಎಷ್ಟು;	ಸದರಿ ರೋಗದಿಂದ ಬೀದರ್ ಜಿಲ್ಲೆಯಲ್ಲಿ ಯಾವುದೇ ಕಾರ್ಖಾನೆ ಮುಚ್ಚಿರುವುದಿಲ್ಲ ಹಾಗೂ ಅದರಿಂದ ಯಾವುದೇ ಕಾರ್ಮಿಕರು ಕೆಲಸ ಕಳೆದುಕೊಂಡಿರುವುದಿಲ್ಲ.
3	ಸದರಿ ಸಾಂಕ್ರಾಮಿಕ ರೋಗದಿಂದ ರಾಜ್ಯ ಹಾಗೂ ಹೊರ ರಾಜ್ಯಗಳಿಂದ ಕೆಲಸ ಕಳೆದುಕೊಂಡು ಜಿಲ್ಲೆಗೆ ಹಿಂದಿರುಗಿರುವ ಕಾರ್ಮಿಕರ ಸಂಖ್ಯೆ ಎಷ್ಟು;	ಈ ಇಲಾಖೆಯಲ್ಲಿ ಮಾಹಿತಿ ಲಭ್ಯವಿರುವುದಿಲ್ಲ.
4	ಈ ಸಾಂಕ್ರಾಮಿಕ ರೋಗದಿಂದ ಕೆಲಸ ಕಳೆದುಕೊಂಡಿರುವ ಕಾರ್ಮಿಕರಿಗೆ ಸರ್ಕಾರ ಯಾವ ಯೋಜನೆಗಳನ್ನು ರೂಪಿಸಿದೆ ಹಾಗೂ ಸದರಿ ಯೋಜನೆಗಳಿಂದ ಪ್ರಯೋಜನ ಪಡೆದಿರುವ ಕಾರ್ಮಿಕರ ಸಂಖ್ಯೆ ಎಷ್ಟು; (ವಿವರ ನೀಡುವುದು)	ಈ ಇಲಾಖೆಯಿಂದ ಯಾವುದೇ ಯೋಜನೆಗಳನ್ನು ರೂಪಿಸಿರುವುದಿಲ್ಲ.

ಸಂಖ್ಯೆ: ಕಾಇ 77 ಕಾಬಾನಿ 2020

(ಅರಬೈಲ್ ಶಿವರಾಂ ಹೆಬ್ಬಾರ್)
ಕಾರ್ಮಿಕ & ಸಕ್ಕರೆ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1424
ಮಾನ್ಯ ಸದಸ್ಯರ ಹೆಸರು	ಶ್ರೀ ಬಂಡೆಪ್ಪ ಖಾಶೆಂಪುರ್ (ಬೀದರ್ ದಕ್ಷಿಣ)
ಉತ್ತರಿಸಬೇಕಾದ ದಿನಾಂಕ	24-09-2020
ಉತ್ತರಿಸಬೇಕಾದ ಸಚಿವರು	ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು

ಕ್ರ. ಸಂ	ಪ್ರಶ್ನೆಗಳು	ಉತ್ತರಗಳು
ಅ)	ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ಕೋವಿಡ್ ರೋಗಿಗಳಿಗೆ ನೀಡಲಾಗುತ್ತಿರುವ ವಿವಿಧ ಚಿಕಿತ್ಸೆಗಳು ಯಾವುವು;	ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ಕೋವಿಡ್ ರೋಗಿಗಳಿಗೆ ಈ ಕೆಳಕಂಡ ಚಿಕಿತ್ಸೆಗಳನ್ನು ನೀಡಲಾಗುತ್ತಿದೆ. 1. Drug Therapy (a) Specific Therapy: Injection Remdesiver, Tab fevipiravir, HCQS, Doxycycline, Ivermectin, Tab: Oseltamavir (b) anticoagulation: Injection Enoxaparin (c) Supportive Therapy: Tab: Zinc, Tab: Vitamin C (d) Steroids: Inj: Dexamethasone, Inj: Methyl prednisolone, (e) immunomodulants: Inj: Itolizumab, (f) Antibiotics: (g) inj: Sepsivac, 2. Oxygen Therapy: 3. Supportive Therapy
ಆ)	ಈ ಸಂಸ್ಥೆಯಲ್ಲಿ ಕೋವಿಡ್ ರೋಗಿಗಳಿಗೆ ಚಿಕಿತ್ಸೆ ನೀಡಲು ಹೊಸದಾಗಿ ಒದಗಿಸಲಾಗಿರುವ ಉಪಕರಣಗಳು ಯಾವುವು;	ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ಕೋವಿಡ್ ರೋಗಿಗಳಿಗೆ ಚಿಕಿತ್ಸೆ ನೀಡಲು ಈ ಕೆಳಕಂಡ ಉಪಕರಣಗಳನ್ನು ಒದಗಿಸಲಾಗಿರುತ್ತದೆ. 1. Ventilators No : 65 2. HFNO : 15 3. Coagulation Analyser – D- Dimer tests 4. UPT-3A – D-Dimer and IL-6 tests equipment. 5. Beckhman Coulter Analyser- Ferritin and LDH4 6. 5-part differential cell counter- CBP/ CBC ಬ್ರೀಮ್ಸ್ ಆಸ್ಪತ್ರೆಯಲ್ಲಿ ಈಗಾಗಲೇ ಕೋವಿಡ್ ಗಿಂತ ಮೊದಲು 14 ಕಿಲೊ ಲೀಟರ್ ಸಾಮಾರ್ಥ್ಯವುಳ್ಳ ಲಿಕ್ವಿಡ್ ಆಕ್ಸಿಜನ್ ಪ್ಲಾನ್ಸ್ ಇರುತ್ತದೆ. ಕೋವಿಡ್ ರೋಗಿಗಳಿಗೆ ಆಕ್ಸಿಜನ್ ಕೊರತೆ ಉಂಟಾಗಬಾರದೆಂದು, 20 ಕಿಲೊ ಲೀಟರ್ ಸಾಮಾರ್ಥ್ಯವುಳ್ಳ ಹೊಸ ಲಿಕ್ವಿಡ್ ಆಕ್ಸಿಜನ್ ಪ್ಲಾಂಟ್ ಅನ್ನು ಸ್ಥಾಪಿಸಲು ಟೆಂಡರ್ ಪ್ರಕ್ರಿಯೆ ಚಾಲನೆಯಲ್ಲಿರುತ್ತದೆ.
ಇ)	ಈ ಸಂಸ್ಥೆಯಲ್ಲಿ ಕೋವಿಡ್ ರೋಗಿಗಳಿಗೆ ಪ್ಲಾಸ್ಮಾ ತೆರಪೀ ಚಿಕಿತ್ಸೆಯನ್ನು ನೀಡಲಾಗುತ್ತಿದೆಯೇ;	ಇಲ್ಲ
ಈ)	ಹಾಗಿದ್ದಲ್ಲಿ, ಪ್ಲಾಸ್ಮಾ ತೆರಪೀ ಚಿಕಿತ್ಸೆ ನೀಡಲು ಅವಶ್ಯಕವಿರುವ ಉಪಕರಣಗಳನ್ನು ಒದಗಿಸಲಾಗಿದೆಯೇ;	ಒದಗಿಸಲಾಗಿದೆ. ದಿನಾಂಕ:18/09/2020ರಂದು ಹೊಸ ಪ್ಲಾಸ್ಮಾ ತೆರಪೀ ಯಂತ್ರವನ್ನು ಒದಗಿಸಿ ಅಳವಡಿಸಲಾಗಿದ್ದು, ಕರ್ನಾಟಕ ಔಷಧ ನಿಯಂತ್ರಣ ಪ್ರಾಧಿಕಾರದ ವತಿಯಿಂದ ಪರವಾನಗಿ ನೀಡುವುದು ಬಾಕಿ ಇರುತ್ತದೆ.
ಉ)	ಇಲ್ಲದಿದ್ದಲ್ಲಿ, ಪ್ಲಾಸ್ಮಾ ತೆರಪೀ ಚಿಕಿತ್ಸೆ ನೀಡಲು ಅವಶ್ಯಕವಿರುವ ಉಪಕರಣಗಳನ್ನು ಒದಗಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ಹಾಗೂ ಯಾವಾಗ ಒದಗಿಸಲಾಗುವುದು?	ಉದ್ಭವಿಸುವುದಿಲ್ಲ.

ಕಡತ ಸಂ: ಎಂಇಡಿ 339 ಎಂ ಎಸ್ ಎಫ್ 2020

(ಡಾ: ಕೆ. ಸುಧಾಕರ್)
ವೈದ್ಯಕೀಯ ಶಿಕ್ಷಣ ಸಚಿವರು.

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1430
ಸದಸ್ಯರ ಹೆಸರು : ಶ್ರೀ ಪ್ರಿಯಾಂಕ್ ಎಂ.ಖರ್ಗೆ (ಚಿತ್ತಾಪುರ)
ಉತ್ತರಿಸಬೇಕಾದ ದಿನಾಂಕ : 24.09.2020
ಉತ್ತರಿಸುವವರು : ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಚಿತ್ತಾಪುರ ವಿಧಾನ ಮತಕ್ಷೇತ್ರದಲ್ಲಿ ಅರಣ್ಯ ವಿಸ್ತರಣೆಗಾಗಿ ಸರ್ಕಾರದ ವತಿಯಿಂದ ಯಾವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ; (ಕಾರ್ಯಕ್ರಮ ಹಮ್ಮಿಕೊಳ್ಳದಿದ್ದರೆ ಕಾರಣ ತಿಳಿಸುವುದು)	ಚಿತ್ತಾಪುರ ಪ್ರಾದೇಶಿಕ ಅರಣ್ಯ ಪ್ರದೇಶದಲ್ಲಿ ಹಸಿರುಹೊದಿಕೆ ಹೆಚ್ಚಿಸಲು, 2020ನೇ ಮಳೆಗಾಲದಲ್ಲಿ ವಿವಿಧ ಯೋಜನೆಗಳಡಿ ಚಿತ್ತಾಪುರ ಮತಕ್ಷೇತ್ರದಲ್ಲಿ 105 ಹೆಕ್ಟೇರ್ ನೆಡುತೋಪು ಬೆಳೆಸಲಾಗಿದೆ. ಚಿತ್ತಾಪುರ ಸಾಮಾಜಿಕ ಅರಣ್ಯ ಪ್ರದೇಶದಲ್ಲಿ ವಿವಿಧ ಯೋಜನೆಗಳಡಿ 2020-21ನೇ ಸಾಲಿನಲ್ಲಿ 11.00 ಹೆಕ್ಟೇರ್ ನೆಡುತೋಪು ಬೆಳೆಸಲಾಗಿದೆ.
ಆ)	ಚಿತ್ತಾಪುರ ಮತ ಕ್ಷೇತ್ರದಡಿಯಲ್ಲಿ ತಾಲ್ಲೂಕಿಗೊಂದು ಹಸಿರು ಗ್ರಾಮ ಯೋಜನೆಯಡಿಯಲ್ಲಿ 2019 ರಿಂದ 2020ರ ವರೆಗೆ ಎಷ್ಟು ಗ್ರಾಮಗಳನ್ನು ಆಯ್ಕೆ ಮಾಡಲಾಗಿದೆ? (ಗ್ರಾಮಗಳ ಹೆಸರುಗಳನ್ನು ತಿಳಿಸುವುದು)	2019-20 ಮತ್ತು 2020-21ನೇ ಸಾಲಿನಲ್ಲಿ ತಾಲ್ಲೂಕಿಗೊಂದು ಹಸಿರು ಗ್ರಾಮ ಯೋಜನೆಯಡಿಯಲ್ಲಿ ರಾಜ್ಯದ ಯಾವುದೇ ಗ್ರಾಮಗಳನ್ನು ಆಯ್ಕೆ ಮಾಡಿರುವುದಿಲ್ಲ.

ಸಂಖ್ಯೆ: ಅಪಜೀ 103 ಎಫ್ಎಫ್ 2020

(ಆನಂದ್ ಸಿಂಗ್)
ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	**1433**
ಮಾನ್ಯ ಸದಸ್ಯರ ಹೆಸರು	**ಶ್ರೀ ರಾಜೀವ್ ಪಿ (ಕುಡಚಿ)**
ಉತ್ತರಿಸಬೇಕಾದ ದಿನಾಂಕ	**24-09-2020**
ಉತ್ತರಿಸುವ ಸಚಿವರು	**ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು**

ಕ್ರ.ಸಂ.	ಪ್ರಶ್ನೆ	ಉತ್ತರ
ಅ	ಕುಡಚಿ ಮತ್ತಕ್ಷೇತ್ರದ ಹಾರೂಗೇರಿ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;	ಇಲ್ಲ
ಆ	ಹಾಗಿದ್ದಲ್ಲಿ ಯಾವ ಕಾಲಮಿತಿಯೊಳಗೆ ಮೇಲ್ದರ್ಜೆಗೇರಿಸಲಾಗುವುದು;	ಉದ್ಭವಿಸುವುದಿಲ್ಲ.
ಇ	ಯಾವ ಕಾರಣಕ್ಕೆ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೇರಿಸುವಲ್ಲಿ ವಿಳಂಬವಾಗುತ್ತಿದೆ? (ವಿವರ ನೀಡುವುದು)	

ಆಕುಕ 112 ಎಸ್‌ಬಿವಿ 2020

(ಬಿ. ಶ್ರೀರಾಮುಲು)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1434
ಮಾನ್ಯ ಸದಸ್ಯರ ಹೆಸರು	ಶ್ರೀ ಈಶ್ವರ್ ಖಂಡ್ರೆ (ಬಾಲ್ಕಿ)
ಉತ್ತರಿಸಬೇಕಾದ ದಿನಾಂಕ	24.09.2020
ಉತ್ತರಿಸುವ ಸಚಿವರು	ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ ಸಂ	ಪ್ರಶ್ನೆ	ಉತ್ತರ
ಅ)	ಬೀದರ್ ಜಿಲ್ಲೆಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರ ವಿದ್ಯಾರ್ಥಿ ನಿಲಯಗಳು ಮತ್ತು ಸರ್ಕಾರಿ ವಸತಿ ನಿಲಯಗಳಿಗೆ ಆಹಾರ ಪದಾರ್ಥಗಳು ಮತ್ತು ಇತರೆ ಸಾಮಗ್ರಿಗಳನ್ನು ಒದಗಿಸುವ ಪ್ರಕ್ರಿಯೆಗೆ 2019-20ರಲ್ಲಿ ಟೆಂಡರ್ ಕರೆದು, 2020-21ನೇ ಸಾಲಿಗೆ ಟೆಂಡರ್ ಅಂತಿಮಗೊಳಿಸಿ, ಟೆಂಡರ್ ನಿಯಮಗಳನ್ನು ಉಲ್ಲಂಘನೆ ಮಾಡಿ ಸರ್ಕಾರದ ಬೊಕ್ಕಸಕ್ಕೆ ಕೋಟ್ಯಾಂತರ ರೂಪಾಯಿ ನಷ್ಟ ಮಾಡಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;	ಬೀದರ್ ಜಿಲ್ಲೆಯ ಹಿಂದುಳಿದ ವರ್ಗಗಳ ವಿದ್ಯಾರ್ಥಿ ನಿಲಯಗಳಿಗೆ ಆಹಾರ ಪೂರೈಕೆಗಾಗಿ ದಿನಾಂಕ:19.06.2019 ರಂದು 2019-20ನೇ ಸಾಲಿಗೆ ಟೆಂಡರ್ ಕರೆಯಲಾಗಿದ್ದು, ಕೆಲವು ದೂರುಗಳ ಮೇರೆಗೆ ದಿನಾಂಕ:28.11.2019 ರಂದು ಮರು ಟೆಂಡರ್ ಕರೆದು ಟೆಂಡರ್ ಪ್ರಕ್ರಿಯೆ ಪೂರ್ಣಗೊಳಿಸಿ ಟೆಂಡರ್ ನಿಯಗಳ ಪ್ರಕಾರ ದಿನಾಂಕ:18.03.2020 ರಂದು ನಡೆದ ಸಮಿತಿ ಸಭೆಯಲ್ಲಿ ಚರ್ಚಿಸಿ 12 ತಿಂಗಳ ಅವಧಿಗೆ ಆದೇಶ ನೀಡಲು ತೀರ್ಮಾನಿಸಿದಂತೆ, ದಿನಾಂಕ:22.04.2020 ರಿಂದ ಅನ್ವಯಿಸುವಂತೆ ಸರಬರಾಜು ಆದೇಶ ನೀಡಲಾಗಿರುತ್ತದೆ. ಆದರೆ, ಸದರಿ ಟೆಂಡರ್‌ನ್ನು ಅಂತಿಮಗೊಳಿಸಿರುವ ಕುರಿತು, ಟೆಂಡರ್ ನಿಯಮಗಳನ್ನು ಉಲ್ಲಂಘಿಸಿರುವ ಬಗ್ಗೆ ಸರ್ಕಾರಕ್ಕೆ ಮೇಲ್ಮನವಿ ಸಲ್ಲಿಸಿದ್ದು, ಮೇಲ್ಮನವಿಯು ವಿಚಾರಣೆ ಹಂತದಲ್ಲಿದೆ.
ಆ)	ಈ ಟೆಂಡರ್ ಗೋಲ್ಮಾಲಿನಲ್ಲಿ ಬೀದರ್ ಜಿಲ್ಲೆಯ ನಿಕಟ ಪೂರ್ವ ಜಿಲ್ಲಾಧಿಕಾರಿ ಮತ್ತು ಇತರೆ ಅಧಿಕಾರಿಗಳು ಶಾಮೀಲಾಗಿದ್ದು ಮೇಲ್ನೋಟಕ್ಕೆ ಸಾಬೀತಾಗಿರುವುದರಿಂದ ಸರ್ಕಾರ ಅವರ ಮೇಲೆ ಯಾವ ರೀತಿಯ ಕ್ರಮ ಕೈಗೊಳ್ಳಲಿದೆ.	ಮೇಲ್ಮನವಿಯು ಸರ್ಕಾರದಲ್ಲಿ ವಿಚಾರಣೆ ಹಂತದಲ್ಲಿದೆ.
ಇ)	ಈ ಟೆಂಡರ್ ನಲ್ಲಿ ಅಕ್ರಮವಾಗಿ L4 ಗೆ ಟೆಂಡರನ್ನು ವಹಿಸಿದ್ದನ್ನು ರದ್ದು ಮಾಡಿ ನಿಯಮಾನುಸಾರ ಅರ್ಹರಾದವರಿಗೆ ಟೆಂಡರ್ ವಹಿಸಲಿಕ್ಕೆ ಸರ್ಕಾರ ಆದೇಶಿಸುವುದೇ?	ಮೇಲ್ಮನವಿ ಪ್ರಾಧಿಕಾರದಲ್ಲಿ ವಿಚಾರಣೆ ಹಂತದಲ್ಲಿ ಬಾಕಿ ಇರುತ್ತದೆ. ಅಂತಿಮ ಆದೇಶದಂತೆ ಕ್ರಮವಹಿಸಲಾಗುವುದು.

ಸಂಖ್ಯೆ:ಹಿಂವಕ 537 ಬಿಎಂಎಸ್ 2020

(ಬಿ.ಶ್ರೀರಾಮುಲು)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ,
ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1437
ಮಾನ್ಯ ಸದಸ್ಯರ ಹೆಸರು	ಶ್ರೀ ಶಿವಾನಂದ ಎಸ್ ಪಾಟೀಲ್ (ಬಸವನಬಾಗೇವಾಡಿ)
ಉತ್ತರಿಸಬೇಕಾದ ದಿನಾಂಕ	24.09.2020
ಉತ್ತರಿಸುವ ಸಚಿವರು	ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ಬಸವನಬಾಗೇವಾಡಿ ಮತಕ್ಷೇತ್ರದ ಮನಗೊಳಿಯಲ್ಲಿ ಮೆಟ್ರಿಕ್-ನಂತರದ ಸರ್ಕಾರಿ ಬಾಲಕಿಯರ ವಸತಿ ನಿಲಯಕ್ಕೆ ಕಟ್ಟಡ ನಿರ್ಮಿಸಲು ಎಷ್ಟು ಅನುದಾನವನ್ನು ಯಾವ ವರ್ಷ ಮಂಜೂರು ಮಾಡಲಾಗಿದೆ;	ಬಸವನಬಾಗೇವಾಡಿ ಮತಕ್ಷೇತ್ರದ ಮನಗೋಳಿಯಲ್ಲಿ ಮೆಟ್ರಿಕ್-ನಂತರದ ಸರ್ಕಾರಿ ಬಾಲಕಿಯರ ವಸತಿ ನಿಲಯಕ್ಕೆ ಕಟ್ಟಡ ನಿರ್ಮಿಸಲು ರೂ.326.32 ಲಕ್ಷಗಳ ಅನುದಾನವನ್ನು 2017-18ನೇ ಸಾಲಿನಲ್ಲಿ ಮಂಜೂರು ಮಾಡಲಾಗಿದೆ.
ಆ)	ಮನಗೂಳಿಯಲ್ಲಿ ಮೆಟ್ರಿಕ್ ನಂತರದ ಸರ್ಕಾರಿ ಬಾಲಕಿಯರ ವಸತಿ ನಿಲಯಕ್ಕೆ ಕಟ್ಟಡವನ್ನು ನಿರ್ಮಿಸಲು ಯಾವ ಏಜೆನ್ಸಿಗೆ ವಹಿಸಿಕೊಡಲಾಗಿದೆ;	ಮನಗೊಳಿಯಲ್ಲಿ ಮೆಟ್ರಿಕ್ ನಂತರದ ಸರ್ಕಾರಿ ಬಾಲಕಿಯರ ವಸತಿ ನಿಲಯಕ್ಕೆ ಕಟ್ಟಡವನ್ನು ನಿರ್ಮಿಸಲು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು ಇವರಿಗೆ ವಹಿಸಲಾಗಿದೆ.
ಇ)	ಮಂಜೂರಾದ ಕಟ್ಟಡ ಕಾಮಗಾರಿಯನ್ನು ಪ್ರಾರಂಭಿಸದೇ ಇರುವುದಕ್ಕೆ ಕಾರಣಗಳೇನು;	2017-18ನೇ ಸಾಲಿನಲ್ಲಿ ವಿಶೇಷ ಅಭಿವೃದ್ಧಿ ಯೋಜನೆಯಡಿಯಲ್ಲಿ ಬಸವನಬಾಗೇವಾಡಿ ತಾಲ್ಲೂಕು ಬಸವನಬಾಗೇವಾಡಿ ಟೌನ್‌ಗೆ ಈ ವಿದ್ಯಾರ್ಥಿನಿಲಯ ಕಟ್ಟಡವು ಮಂಜೂರಾಗಿದ್ದು, ಅನಂತರ ಇದನ್ನು ಸದರಿ ತಾಲ್ಲೂಕಿನ ಮೆಟ್ರಿಕ್-ನಂತರ ಬಾಲಕಿಯರ ವಿದ್ಯಾರ್ಥಿನಿಲಯ ಮನಗೂಳಿ ಗ್ರಾಮಕ್ಕೆ ಈ ಕಟ್ಟಡವನ್ನು ನಿರ್ಮಿಸಲು ಸ್ಥಳಾಂತರಿಸಲಾಗಿದೆ. ಮನಗೂಳಿ ಗ್ರಾಮದ 6 ಎಕರೆ 28 ಗುಂಟೆ ಉನ್ನತ ಶಿಕ್ಷಣ ಇಲಾಖೆ ಪ್ರಥಮ ದರ್ಜೆ ಕಾಲೇಜಿನ 20 ಗುಂಟೆ ಜಮೀನನ್ನು ಉನ್ನತ ಶಿಕ್ಷಣ ಇಲಾಖೆಯಿಂದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಹಸ್ತಾಂತರಿಸಿಕೊಂಡು ನಿರ್ಮಾಣ ಏಜೆನ್ಸಿಯಾದ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘಕ್ಕೆ ಹಸ್ತಾಂತರಿಸುವಲ್ಲಿ ವಿಳಂಬವಾಗಿರುತ್ತದೆ.
ಈ)	ವಿದ್ಯಾರ್ಥಿನಿಯರ ಹಿತದೃಷ್ಟಿಯಿಂದ ಕಟ್ಟಡ ನಿರ್ಮಾಣವನ್ನು ಯಾವ ವರ್ಷದಿಂದ ಪ್ರಾರಂಭಿಸಲಾಗುವುದು?	ವಿದ್ಯಾರ್ಥಿನಿಲಯದ ನಿರ್ಮಾಣ ಕಾರ್ಯವನ್ನು ಶೀಘ್ರದಲ್ಲೇ ಪ್ರಾರಂಭಿಸಲಾಗುವುದು.

ಸಂ:ಹಿಂವಕ 522 ಬಿಎಂಎಸ್ 2020

(ಬಿ.ಶ್ರೀರಾಮುಲು)
ಆರೋಗ್ಯ ಮತ್ತು ಕುಟುಂಬ ಕಲ್ಯಾಣಇಲಾಖೆ
ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

ಕರ್ನಾಟಕ ವಿಧಾನ ಸಭೆ

1	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1440
2	ಸದಸ್ಯರ ಹೆಸರು	ಶ್ರೀ ಅಜಯ್ ಧರ್ಮ ಸಿಂಗ್
3	ಉತ್ತರಿಸಬೇಕಾದ ದಿನಾಂಕ	24/09/2020
4	ಉತ್ತರಿಸಬೇಕಾದ ಸಚಿವರು	ವೈದ್ಯಕೀಯ ಶಿಕ್ಷಣ ಸಚಿವರು

ಕ್ರ. ಸಂ	ಪ್ರಶ್ನೆಗಳು	ಉತ್ತರಗಳು
ಅ)	ರಾಜ್ಯದಲ್ಲಿ ದಿಲ್ಲಿಯ ಪ್ರತಿಷ್ಠಿತ 'ಏಮ್ಸ್' ಮಾದರಿಯಲ್ಲಿ ಆಸ್ಪತ್ರೆಯನ್ನು ಕರ್ನಾಟಕದಲ್ಲಿ ನಿರ್ಮಿಸಲು ಸರ್ಕಾರದಲ್ಲಿ ಪ್ರಸ್ತಾವನೆ ಇದೆಯೇ ;	ಹೌದು.
ಆ)	ಹಾಗಿದ್ದಲ್ಲಿ, ಕಲಬುರಗಿಯಲ್ಲಿ ಸ್ಥಾಪನೆ ಮಾಡಲು ಸರ್ಕಾರ ಇಚ್ಛಿಸಿದೆಯೇ? (ಮಾಹಿತಿ ನೀಡುವುದು)	ಹೌದು. ಕಲಬುರಗಿ ಜಿಲ್ಲೆಯ ಇ.ಎಸ್.ಐ. ಆಸ್ಪತ್ರೆಯ ಆವರಣದಲ್ಲಿ ಏಮ್ಸ್ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯನ್ನು ಪ್ರಾರಂಭಿಸುವ ಕುರಿತು ಮಾನ್ಯ ಮುಖ್ಯಮಂತ್ರಿಗಳು ಕೇಂದ್ರ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಿಗೆ ದಿನಾಂಕ: 24-08-2020 ರಂದು ಪತ್ರ ಬರೆದಿರುತ್ತಾರೆ.

ಸಂಖ್ಯೆ: ಎಂಇಡಿ 474 ಎಂಎಂಸಿ 2020

(ಡಾ|| ಕೆ. ಸುಧಾಕರ್)
ವೈದ್ಯಕೀಯ ಶಿಕ್ಷಣ ಸಚಿವರು

ಕರ್ನಾಟಕ ವಿಧಾನಸಭೆ

1)	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1442
2)	ಮಾನ್ಯ ಸದಸ್ಯರ ಹೆಸರು	ಶ್ರೀ ಅಜಯ್ ಧರ್ಮ ಸಿಂಗ್ ಡಾ॥ (ಜೇವರ್ಗಿ)
3)	ಉತ್ತರಿಸಬೇಕಾದ ದಿನಾಂಕ	24/09/2020
4)	ಉತ್ತರಿಸುವವರು	ಉಪ ಮುಖ್ಯಮಂತ್ರಿಗಳು ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಸಚಿವರು

****

ಕ್ರ ಸಂ	ಪ್ರಶ್ನೆ	ಉತ್ತರ
ಅ)	ಪ್ರಸಕ್ತ ಸಾಲಿನಲ್ಲಿ ರಾಜ್ಯದಲ್ಲಿ ಎಷ್ಟು ಐಟಿಐ ಕಾಲೇಜುಗಳಿಗೆ ಸರ್ಕಾರದಿಂದ ಅನುಮತಿ ನೀಡಲಾಗಿದೆ;	ಪ್ರಸಕ್ತ ಸಾಲಿನಲ್ಲಿ ರಾಜ್ಯದಲ್ಲಿ ಯಾವುದೇ ಸರ್ಕಾರಿ ಐಟಿಐ ಕಾಲೇಜುಗಳಿಗೆ ಅನುಮತಿ ನೀಡಿರುವುದಿಲ್ಲ.
ಆ)	ಯಡ್ರಾಮಿ ತಾಲ್ಲೂಕಿಗೆ ಕಾಲೇಜ್ ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;	ಇಲ್ಲ.
ಇ)	ಹಾಗಿದ್ದಲ್ಲಿ, ಯಾವಾಗ ಯಡ್ರಾಮಿ ತಾಲ್ಲೂಕಿಗೆ ಐಟಿಐ ಕಾಲೇಜ್ ಮಂಜೂರು ಮಾಡಲಾಗುವುದು?	ಉದ್ಭವಿಸುವುದಿಲ್ಲ.

ಸಂಖ್ಯೆ: ಕೌಉಜೀಇ 57 ಕೈತಪ್ರ 2020

(ಡಾ.ಸಿ.ಎನ್.ಅಶ್ವಥ್ ನಾರಾಯಣ)
ಉಪ ಮುಖ್ಯಮಂತ್ರಿಗಳು ಹಾಗೂ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1449
ಮಾನ್ಯ ಸದಸ್ಯರ ಹೆಸರು	ಶ್ರೀ ಮಹದೇವ ಕೆ. (ಪಿರಿಯಾಪಟ್ಟಣ)
ಉತ್ತರಿಸಬೇಕಾದ ದಿನಾಂಕ	24-09-2020
ಉತ್ತರಿಸುವ ಸಚಿವರು	ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
(ಅ)	ಪಿರಿಯಾಪಟ್ಟಣ ಮತಕ್ಷೇತ್ರದ ಬೆಟ್ಟದಪುರ ಹಾಗೂ ರಾವಂದೂರು ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸಮುದಾಯ ಆರೋಗ್ಯ ಕೇಂದ್ರಗಳನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಯಾವ ಹಂತದಲ್ಲಿದೆ; (ವಿವರ ಒದಗಿಸುವುದು)	ಪ್ರಸ್ತಾವನೆಯು ಸರ್ಕಾರದಲ್ಲಿ ಸ್ವೀಕೃತಗೊಂಡಿರುವುದಿಲ್ಲ.
(ಆ)	ಸದರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳು ತಾಲ್ಲೂಕು ಸಾರ್ವಜನಿಕ ಆಸ್ಪತ್ರೆಯಿಂದ 18 ಕಿ.ಮೀಟರ್ ದ್ದೂರದಲ್ಲಿದ್ದು, ಸಾರ್ವಜನಿಕರಿಗೆ ಹತ್ತಿರದಲ್ಲಿ ಉನ್ನತ ಚಿಕಿತ್ಸೆ ಪಡೆಯಲು ಅನುಕೂಲವಾಗುವಂತೆ ಈ ಎರಡು ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸಲು ಸರ್ಕಾರ ಕ್ರಮಕೈಗೊಳ್ಳುವುದೇ ?	

ಆಕುಕ 113 ಎಸ್‌ಬಿವಿ 2020

(ಬಿ. ಶ್ರೀರಾಮುಲು)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1450
ಮಾನ್ಯ ಸದಸ್ಯರ ಹೆಸರು	ಶ್ರೀ ಮಹದೇವ.ಕೆ (ಪಿರಿಯಾಪಟ್ಟಣ)
ಉತ್ತರಿಸಬೇಕಾದ ದಿನಾಂಕ	24-09-2020
ಉತ್ತರಿಸುವ ಸಚಿವರು	ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ.ಸಂ.	ಪ್ರಶ್ನೆ	ಉತ್ತರ
ಅ	ಪಿರಿಯಾಪಟ್ಟಣ ಮತಕ್ಷೇತ್ರದಲ್ಲಿ ಹೊಸದಾಗಿ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದಲಿದೆಯೇ;	ಇಲ್ಲ.
ಆ	ಹಾಗಿದ್ದಲ್ಲಿ, ಪಂಚವಳ್ಳಿ ಗ್ರಾಮ ಹಾಗೂ ಮೊನ್ನಾಡಹಳ್ಳಿ ಗ್ರಾಮಗಳ ಸುತ್ತಮುತ್ತ ಯಾವುದೇ ಪ್ರಾಥಮಿಕ ಆರೋಗ್ಯ ಕೇಂದ್ರ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
ಇ	ಈ ಎರಡು ಗ್ರಾಮಗಳ ಜನರು ಚಿಕಿತ್ಸೆ ಪಡೆಯಲು ದೂರದ ನಗರ ಪ್ರದೇಶಗಳಿಗೆ ಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
ಈ	ಸಾರ್ವಜನಿಕರ ಆರೋಗ್ಯದ ದೃಷ್ಟಿಯಿಂದ ಪಂಚವಳ್ಳಿ ಗ್ರಾಮ ಮತ್ತು ಮೊನ್ನಾಡಹಳ್ಳಿ ಗ್ರಾಮಕ್ಕೆ ಪ್ರಾಥಮಿಕ ಆರೋಗ್ಯ ಕೇಂದ್ರ ಮಂಜೂರು ಮಾಡಲು ಸರ್ಕಾರ ಕ್ರಮಕೈಗೊಳ್ಳುವುದೇ?	ಸಧ್ಯಕ್ಕೆ ಯಾವುದೇ ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮಂಜೂರು ಮಾಡುವ ಪ್ರಸ್ತಾವನೆ ಇರುವುದಿಲ್ಲ.

ಆಕುಕ 114 ಎಸ್‌ಬಿವಿ 2020

(ಬಿ. ಶ್ರೀರಾಮುಲು)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1451
ಸದಸ್ಯರ ಹೆಸರು	:	ಶ್ರೀ. ಮಹದೇವ ಕೆ. (ಪಿರಿಯಾಪಟ್ಟಣ)
ಉತ್ತರಿಸಬೇಕಾದ ದಿನಾಂಕ	:	24.09.2020
ಉತ್ತರಿಸುವ ಸಚಿವರು	:	ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ಕ್ರಸಂ	ಪ್ರಶ್ನೆ	ಉತ್ತರ
ಅ.	ಸರ್ಕಾರ ಈ ಸಾಲಿನಲ್ಲಿ ಹೊಸದಾಗಿ ಸಕಾರಿ ಪ್ರೌಢಶಾಲೆ ಹಾಗೂ ಪದವಿಪೂರ್ವ ಕಾಲೇಜು ಮಂಜೂರು ಮಾಡುವ ಪ್ರಸ್ತಾವನೆಯಲ್ಲಿದೆಯೇ;	ಇಲ್ಲ
ಆ.	ಪಿರಿಯಾಪಟ್ಟಣ ಮತಕ್ಷೇತ್ರದ ಕಂಪಲಾಪುರ, ಮಾಕೋಡು, ಕೊಪ್ಪ ಗ್ರಾಮದ ವಿದ್ಯಾರ್ಥಿಗಳು ಪದವಿ ಪೂರ್ವ ಶಿಕ್ಷಣ ಪಡೆಯಲು ದೂರದ ಗ್ರಾಮ ಹಾಗೂ ಪಟ್ಟಣಗಳಿಗೆ ಹೋಗುತ್ತಿದ್ದಾರೆಂಬುದು ಸರ್ಕಾರದ ಗಮನದಲ್ಲಿದೆಯೇ;	ಬಂದಿದೆ.
ಈ.	ಹಾಗಿದ್ದರೆ, ಸರ್ಕಾರ ಸದರಿ ಕ್ಷೇತ್ರದ ಕಂಪಲಾಪುರ, ಮಾಕೋಡು, ಕೊಪ್ಪ ಗ್ರಾಮಗಳಿಗೆ ಸರ್ಕಾರಿ ಪದವಿಪೂರ್ವ ಕಾಲೇಜು ಸ್ಥಾಪನೆ ಮಾಡುವ ಪ್ರಸ್ತಾವನೆ ಇದೆಯೇ (ವಿವರ ನೀಡುವುದು)?	ಪ್ರಸ್ತಾವನೆ ಇಲ್ಲ

ಸಂಖ್ಯೆ: ಇಪಿ 66 ಎಲ್‌ಬಿಪಿ 2020

(ಎಸ್. ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1452.
ಸದಸ್ಯರ ಹೆಸರು	:	ಶ್ರೀಮತಿ ಕುಸುಮಾವತಿ ಚನ್ನಬಸಪ್ಪ ಶಿವಳ್ಳಿ (ಕುಂದಗೋಳ)
ಉತ್ತರಿಸುವ ದಿನಾಂಕ	:	24.09.2020.
ಉತ್ತರಿಸುವ ಸಚಿವರು	:	ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ)

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ಕಳೆದ ಮೂರು ವರ್ಷಗಳಲ್ಲಿ ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ ಕಲಿಯುತ್ತಿರುವ ವಿದ್ಯಾರ್ಥಿಗಳಿಗೆ ನೀಡುತ್ತಿರುವ ಶೈಕ್ಷಣಿಕ ಸೌಲಭ್ಯಗಳು ಯಾವುವು;	ಕಳೆದ ಮೂರು ವರ್ಷಗಳಲ್ಲಿ ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ ಕಲಿಯುತ್ತಿರುವ ವಿದ್ಯಾರ್ಥಿಗಳಿಗೆ ನೀಡುತ್ತಿರುವ ಶೈಕ್ಷಣಿಕ ಸೌಲಭ್ಯಗಳು ಈ ಕೆಳಕಂಡಂತಿವೆ:- 1. ವಿಶ್ವವಿದ್ಯಾಲಯದ ವಿದ್ಯಾರ್ಥಿನಿಲಯಗಳಲ್ಲಿ ಪ.ಜಾ/ಪಂಗಡದ ವಿದ್ಯಾರ್ಥಿಗಳಿಗೆ ಹೆಚ್ಚುವರಿ ಊಟದ ವೆಚ್ಚ ಭರಿಸುವುದು; 2. ಪ.ಜಾ/ಪಂಗಡದ ಪಿಹೆಚ್‌ಡಿ ವಿದ್ಯಾರ್ಥಿಗಳಿಗೆ ಮಾಸಿಕ ಗರಿಷ್ಠ ರೂ.10,000 ಶಿಷ್ಯ ವೇತನ ನೀಡುವುದು; (ವಿಶ್ವವಿದ್ಯಾಲಯ/ಸ್ನಾತಕೋತ್ತರ ಕೇಂದ್ರ/ಸಂಯೋಜಿತ ಇತ್ಯಾದಿ ಕಾಲೇಜುಗಳಲ್ಲಿ ಪಿಹೆಚ್‌ಡಿಗೆ ಆಯ್ಕೆ ಮಾಡಿದ ವಿದ್ಯಾರ್ಥಿಗಳಿಗೆ) 3. ಶುಲ್ಕ ಮರುಪಾವತಿ; (ಕುಟುಂಬದ ವಾರ್ಷಿಕ ಆದಾಯ ರೂ.2.50 ಲಕ್ಷ ದಿಂದ ಮೇಲ್ಪಟ್ಟು ರೂ.10.00 ಲಕ್ಷದವರೆಗಿನ ವಿದ್ಯಾರ್ಥಿಗಳಿಗೆ ಶೇ.50ರಷ್ಟು ಶುಲ್ಕ ಮರುಪಾವತಿ) 4. ಅಂತರಾಷ್ಟ್ರೀಯ/ರಾಷ್ಟ್ರೀಯ ಸಮ್ಮೇಳನ/ವಿಚಾರ ಸಂಕೀರಣಗಳಲ್ಲಿ ಭಾಗವಹಿಸುವ ಪ.ಜಾ/ಪಂಗಡದ ವಿದ್ಯಾರ್ಥಿಗಳಿಗೆ ಧನ ಸಹಾಯ; 5. ಪ.ಜಾ/ಪಂಗಡದ ವಿದ್ಯಾರ್ಥಿಗಳು ಪ್ರಕಟಿಸುವ ಸಂಶೋಧನಾ ಲೇಖನ ಪ್ರಕಟಣೆಗಳಿಗೆ ಧನ ಸಹಾಯ;
ಆ)	ಹಿಂದೆ ನೀಡುತ್ತಿದ್ದ ಯಾವ ಸವಲತ್ತುಗಳನ್ನು 2020-21ನೇ ಸಾಲಿನಿಂದ ನಿಲ್ಲಿಸಲಾಗಿದೆ; ಇದಕ್ಕೆ ಕಾರಣಗಳೇನು (ವಿವರ ನೀಡುವುದು)	2020-21ನೇ ಸಾಲಿನಿಂದ ಈ ಕೆಳಕಂಡ ಸವಲತ್ತುಗಳನ್ನು ನಿಲ್ಲಿಸಲಾಗಿದೆ:- 1. ಅಂತರಾಷ್ಟ್ರೀಯ/ರಾಷ್ಟ್ರೀಯ ಸಮ್ಮೇಳನ/ವಿಚಾರ ಸಂಕೀರಣಗಳಲ್ಲಿ ಭಾಗವಹಿಸುವ ಪ.ಜಾ/ಪಂಗಡದ ವಿದ್ಯಾರ್ಥಿಗಳಿಗೆ ಧನ ಸಹಾಯ; 2. ಪ.ಜಾ/ಪಂಗಡದ ವಿದ್ಯಾರ್ಥಿಗಳು ಪ್ರಕಟಿಸುವ ಸಂಶೋಧನಾ ಲೇಖನ ಪ್ರಕಟಣೆಗಳಿಗೆ ಧನ ಸಹಾಯ; ಆಯ-ವ್ಯಯದ ಲಭ್ಯತೆಗೆ ಅನುಸಾರವಾಗಿ ಯೋಜನೆಯ ಲಾಭ ಗರಿಷ್ಠ ಮಟ್ಟದಲ್ಲಿ ತಲುಪಿಸುವ ಉದ್ದೇಶದಿಂದ ಪ್ರಮುಖ ಕಾರ್ಯಕ್ರಮಗಳಿಗೆ ಸವಲತ್ತುಗಳನ್ನು ನೀಡಲಾಗುತ್ತಿರುವ ಕಾರಣದಿಂದ ಮೇಲ್ಕಂಡ ಸವಲತ್ತುಗಳನ್ನು ನಿಲ್ಲಿಸಲಾಗಿದೆ.
ಇ)	ನಿಲ್ಲಿಸಿರುವ ಯೋಜನೆಗಳನ್ನು ಮುಂದುವರೆಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?	ಆರ್ಥಿಕ ವರ್ಷ ಚಾಲ್ತಿಯಲ್ಲಿರುವುದರಿಂದ ಅನುಮೋದನೆಗೊಂಡ ಕಾರ್ಯಕ್ರಮಗಳನ್ನಷ್ಟೇ ಮುಂದುವರೆಸಲಾಗುತ್ತಿದೆ.

ಸಂಖ್ಯೆ: ಇಡಿ 122 ಹೆಚ್‌ಪಿಯು 2020)

(ಡಾ: ಅಶ್ವತ್ಥನಾರಾಯಣ.ಸಿ.ಎನ್)
ಉಪ ಮುಖ್ಯಮಂತ್ರಿ ಹಾಗೂ ಉನ್ನತ ಶಿಕ್ಷಣ ಸಚಿವರು

ಕರ್ನಾಟಕ ವಿಧಾನ ಸಭೆ

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1453
2. ಮಾನ್ಯ ಸದಸ್ಯರ ಹೆಸರು : ಶ್ರೀಮತಿ ಕುಸುಮಾವತಿ ಚನ್ನಬಸಪ್ಪ ಶಿವಳ್ಳಿ (ಕುಂದಗೋಳ)
3. ಉತ್ತರಿಸಬೇಕಾದ ದಿನಾಂಕ : 24/09/2020
4. ಉತ್ತರಿಸುವವರು : ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು

ಕ್ರಮ ಸಂಖ್ಯೆ	ಪ್ರಶ್ನೆ	ಉತ್ತರ
(ಅ)	ಕುಂದಗೋಳ ವಿಧಾನಸಭಾ ಕ್ಷೇತ್ರದಲ್ಲಿನ ಕಾರ್ಮಿಕರಿಗೆ ಎಷ್ಟು ಪಡಿತರ ಕಿಟ್ ವಿತರಿಸಲಾಗಿದೆ? (ಧಾರವಾಡ ಜಿಲ್ಲೆಯ ಸಂಪೂರ್ಣ ಮಾಹಿತಿ ನೀಡುವುದು)	ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ಕುಂದಗೋಳ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಆಹಾರ ಸಾಮಾಗ್ರಿಗಳ ಕಿಟ್‌ಗಳನ್ನು ವಿತರಿಸಿರುವುದಿಲ್ಲ. ಧಾರವಾಡ ಜಿಲ್ಲಾ ವ್ಯಾಪ್ತಿಯಲ್ಲಿ ವಿತರಿಸಿರುವ ಕಿಟ್‌ಗಳ ಪ್ರದೇಶವಾರು ಮಾಹಿತಿ ಈ ಕೆಳಕಂಡಂತಿದೆ.

ಕ್ರ.ಸಂ	ತಾಲ್ಲೂಕು	ವಿತರಿಸಿದ ಕಿಟ್‌ಗಳ ಸಂಖ್ಯೆ
1	ಕಲಘಟಗಿ	4,000
2	ಹುಬ್ಬಳ್ಳಿ ನಗರ	6,000
3	ಹುಬ್ಬಳ್ಳಿ ಗ್ರಾಮೀಣ	4,000
4	ಹುಬ್ಬಳ್ಳಿ ಪೂರ್ವ	4,000
5	ಹುಬ್ಬಳ್ಳಿ	4,000
6	ಧಾರವಾಡ	5,500
ಒಟ್ಟು		27,500

ಕಾಇ 322 ಎಲ್‌ಇಟಿ 2020

(ಅರಬೈಲ್ ಶಿವರಾಂ ಹೆಬ್ಬಾರ್)
ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು

ಕರ್ನಾಟಕ ವಿಧಾನಸಭೆ

1)	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1459
2)	ಮಾನ್ಯ ಸದಸ್ಯರ ಹೆಸರು	ಶ್ರೀ ಬಾಲಕೃಷ್ಣ.ಸಿ.ಎನ್. (ಶ್ರವಣಬೆಳಗೊಳ)
3)	ಉತ್ತರಿಸಬೇಕಾದ ದಿನಾಂಕ	24/09/2020
4)	ಉತ್ತರಿಸುವವರು	ಉಪ ಮುಖ್ಯಮಂತ್ರಿಗಳು ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಸಚಿವರು

****

ಕ್ರ ಸಂ	ಪ್ರಶ್ನೆ	ಉತ್ತರ
ಅ)	ಚನ್ನರಾಯಪಟ್ಟಣ ತಾಲ್ಲೂಕು ದಂಡಿಗನಹಳ್ಳಿ ಹೋಬಳಿ ಉದಯಪುರ ಸರ್ಕಾರಿ ಐ.ಟಿ.ಐ ಕಾಲೇಜಿನ ಕಟ್ಟಡ ನಿರ್ಮಾಣ ಕಾಮಗಾರಿಗೆ ರೂ. 489.00 ಲಕ್ಷಗಳಿಗೆ ಮಂಜೂರಾತಿ ನೀಡಿ ಕಟ್ಟಡ ಕಾಮಗಾರಿ ಪ್ರಗತಿಯಲ್ಲಿರುವುದು ನಿಜವೇ;	ಹೌದು.
ಆ)	ಕಾಲೇಜಿನ ಕಟ್ಟಡ ನಿರ್ಮಾಣ ಕಾಮಗಾರಿಯು ಪ್ರಗತಿಯಲ್ಲಿದ್ದು, ಕಾಮಗಾರಿಯನ್ನು ಪೂರ್ಣಗೊಳಿಸಲು ಸುಮಾರು ರೂ. 150.00 ಲಕ್ಷಗಳ ಹೆಚ್ಚುವರಿ ಅನುದಾನ ಮಂಜೂರು ಮಾಡುವಂತೆ ಪ್ರಸ್ತಾವನೆಯು ಸರ್ಕಾರಕ್ಕೆ ಸಲ್ಲಿಸಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಪ್ರಸ್ತಾವನೆಯು ಸ್ವೀಕೃತಗೊಂಡಿರುವುದಿಲ್ಲ.
ಇ)	ಹಾಗಿದ್ದಲ್ಲಿ, ಸದರಿ ಕಾಲೇಜಿನ ಕಟ್ಟಡ ನಿರ್ಮಾಣ ಕಾಮಗಾರಿ ಪೂರ್ಣಗೊಳಿಸಲು ಹೆಚ್ಚುವರಿ ಅನುದಾನ ರೂ. 150.00 ಲಕ್ಷಗಳ ಮಂಜೂರಾತಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣ ಮಾಹಿತಿ ನೀಡುವುದು)	ಕಾರ್ಯಪಾಲಕ ಇಂಜಿನಿಯರ್ ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ ಹಾಸನ ಇವರ ಪತ್ರ ಸಂಖ್ಯೆ: ಕಾಇಂ:ಲೋಇಂ:ಹಾ:ವಿಹಾ:ಲೆಸ-2:20-21/1107 ದಿ: 28/07/2020 ರಲ್ಲಿ ಉದಯಪುರ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಕಟ್ಟಡ ಕಾಮಗಾರಿಯನ್ನು ರೂ. 5,40,47,927.00 ಗಳಲ್ಲಿ ನಿರ್ವಹಿಸಲು ಗುತ್ತಿಗೆದಾರರಿಗೆ ಕಾರ್ಯಾದೇಶ ನೀಡಿರುವುದಾಗಿ ತಿಳಿಸಿ, ಈವರೆಗೆ ರೂ. 395.00 ಲಕ್ಷಗಳು ಬಿಡುಗಡೆಯಾಗಿರುವುದರಿಂದ ಉಳಿಕೆ ರೂ. 145.48 ಲಕ್ಷಗಳ ಅನುದಾನ ಬಿಡುಗಡೆ ಮಾಡಲು ಕೋರಿರುತ್ತಾರೆ. ಮಂಜೂರಾತಿ ನೀಡಿದ ಮೊತ್ತಕ್ಕಿಂತ ಟೆಂಡರ್ ಮೊತ್ತ ರೂ. 51.48 ಲಕ್ಷ ಹೆಚ್ಚುವರಿಯಾಗಿದ್ದು, ಸದರಿ ಮೊತ್ತಕ್ಕೆ ಸಂಬಂಧಿಸಿದಂತೆ ಅಗತ್ಯ ದಾಖಲೆ ಹಾಗೂ ಮಾಹಿತಿಯನ್ನು ನಿರ್ಮಾಣ ಏಜೆನ್ಸಿಯಿಂದ ಪಡೆದು ನಿಯಮಾನುಸಾರ ಪರಿಶೀಲಿಸಿ ಮಂಜೂರಾತಿಗಾಗಿ ಕ್ರಮವಹಿಸಲಾಗುವುದು.

ಸಂಖ್ಯೆ: ಕೌಉಜೀಇ 49 ಕೈತಪ್ರ 2020

(ಡಾ.ಸಿ.ಎನ್.ಅಶ್ವಥ್ ನಾರಾಯಣ)
ಉಪ ಮುಖ್ಯಮಂತ್ರಿಗಳು ಹಾಗೂ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1460
ಮಾನ್ಯ ಸದಸ್ಯರ ಹೆಸರು : ಶ್ರೀ ಎಸ್.ಎನ್.ನಾರಾಯಣಸ್ವಾಮಿ ಕೆ.ಎಂ. (ಬಂಗಾರಪೇಟೆ)
ಉತ್ತರಿಸಬೇಕಾದ ದಿನಾಂಕ : 24-9-2020
ಉತ್ತರಿಸುವ ಸಚಿವರು : ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
1	ಬಂಗಾರಪೇಟೆ ತಾಲ್ಲೂಕು ಬೂದಿಕೋಟೆ ಹೋಬಳಿ ಕೇಂದ್ರದಲ್ಲಿ ಆರೋಗ್ಯ ಇಲಾಖೆಗೆ ಸಂಬಂಧಿಸಿದ ಸುಮಾರು ಒಂದು ಎಕರೆ ಸ್ಥಳವನ್ನು ಸಾರ್ವಜನಿ ಉದ್ದೇಶ ಸಂಬಂಧ ಬಸ್ ನಿಲ್ದಾಣ ನಿರ್ಮಾಣಕ್ಕಾಗಿ ಹಸ್ತಾಂತರಿಸಲು ಸಿದ್ಧಪಡಿಸಿದ ಪ್ರಸ್ತಾವನೆ ಯಾವ ಹಂತದಲ್ಲಿದೆ;	ಬಂಗಾರಪೇಟೆ ತಾಲ್ಲೂಕು ಬೂದಿಕೋಟೆ ಹೋಬಳಿ ಕೇಂದ್ರದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ಸೇರಿದ ಖಾತೆ ಸಂಖ್ಯೆ 656 ರಲ್ಲಿನ 147*110 ಅಡಿಗಳ ಜಾಗವನ್ನು ಸಾರಿಗೆ ಇಲಾಖೆಗೆ ಹಸ್ತಾಂತರಿಸುವ ಬಗ್ಗೆ ಪ್ರಸ್ತಾವನೆಯನ್ನು ಸಲ್ಲಿಸುವಂತೆ ದಿನಾಂಕ: 08-03-2018 ರಂದು ಸಾರಿಗೆ ಇಲಾಖೆಯನ್ನು ಕೋರಲಾಗಿತ್ತು. ಸಾರಿಗೆ ಅವಶ್ಯಕತೆಗಳನ್ನು ಪೂರೈಸಲು ಹಾಗೂ ನಿಲ್ದಾಣದಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಹೋಬಳಿ ಕೇಂದ್ರದಲ್ಲಿ ಬಸ್ ನಿಲ್ದಾಣ ನಿರ್ಮಾಣಕ್ಕಾಗಿ ಸುತ್ತೋಲೆಯಲ್ಲಿನ ಮಾರ್ಗಸೂಚಿಗಳ ಅನುಸಾರ ಕನಿಷ್ಟ 01 ಎಕರೆ ಜಮೀನು ಅವಶ್ಯಕವಿದ್ದು, ಆರೋಗ್ಯ ಇಲಾಖೆಗೆ ಸೇರಿದ ನಿವೇಶನದ ವಿಸ್ತೀರ್ಣವು 15 ಗುಂಟೆ ಇರುವುದರಿಂದ ಪ್ರಸ್ತಾಪಿತ ಸ್ಥಳದಲ್ಲಿ 1 ಎಕರೆ ಜಮೀನನ್ನು ಮಂಜೂರು ಮಾಡುವಂತೆ ತಹಶೀಲ್ದಾರ್, ಬಂಗಾರಪೇಟೆ ಇವರೊಂದಿಗೆ ಪತ್ರ ವ್ಯವಹಾರ ಮಾಡಿರುವುದಾಗಿ ಸಾರಿಗೆ ಇಲಾಖೆಯು ಸಂಪಹಿಸಿರುತ್ತದೆ. ಆದುದರಿಂದ ಪ್ರಸ್ತಾಪಿತ ಜಮೀನನ್ನು ಸಾರಿಗೆ ಇಲಾಖೆಗೆ ಹಸ್ತಾಂತರಿಸುವ ಕುರಿತು ಪ್ರಸ್ತುತ ಯಾವುದೇ ಪ್ರಸ್ತಾವನೆ ಇರುವುದಿಲ್ಲ.
2	ಕಳೆದ ಮೂರು ವರ್ಷಗಳಿಂದ ಪ್ರಸ್ತಾವನೆ ಬಾಕಿಯಿರುವ ಬಗ್ಗೆ ಇಲಾಖೆ ಕೈಗೊಂಡ ಕ್ರಮಗಳೇನು;	ಅನ್ವಯಿಸುವುದಿಲ್ಲ.
3	ಪ್ರಸ್ತುತ ಸದರಿ ಪ್ರಸ್ತಾವನೆ ಯಾವ ಹಂತದಲ್ಲಿದೆ? (ವಿವರಗಳನ್ನು ನೀಡುವುದು)	

ಆಕುಕ 105 ಎಸ್.ಎಂ.ಎಂ. 2020

(ಬಿ. ಶ್ರೀರಾಮುಲು)

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ

ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	**1462**
ಸದಸ್ಯರ ಹೆಸರು	**ಶ್ರೀ ಬಸವನಗೌಡ ದದ್ದಲ (ರಾಯಚೂರು ಗ್ರಾಮಾಂತರ)**
ಉತ್ತರಿಸಬೇಕಾದ ದಿನಾಂಕ	**24.09.2020**
ಉತ್ತರಿಸಬೇಕಾದ ಸಚಿವರು	**ಮಾನ್ಯ ಉಪಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ)**
ಪ್ರಶ್ನೆ	ಉತ್ತರ
ಅ) ರಾಯಚೂರಿನಲ್ಲಿ ಸ್ಥಾಪಿಸಲು ನಿರ್ಧರಿಸಲಾದ ಐ.ಐ.ಐ.ಟಿ ಕಾಲೇಜಿನ ಕಟ್ಟಡವು ಯಾವ ಹಂತದಲ್ಲಿದೆ; ಯಾವ ಕಾಲಮಿತಿಯಲ್ಲಿ ಇದನ್ನು ಪೂರ್ಣಗೊಳಿಸುವುದು;	ರಾಯಚೂರಿನ ಐ.ಐ.ಐ.ಟಿ ಗಾಗಿ ಐ.ಐ.ಟಿ ಹೈದರಾಬಾದ್ ಸಂಸ್ಥೆಯು ಮಾರ್ಗದರ್ಶಿ ಸಂಸ್ಥೆಯಾಗಿರುತ್ತದೆ. ರಾಯಚೂರಿನಲ್ಲಿ ಐ.ಐ.ಐ.ಟಿ ಸಂಸ್ಥೆಯ ಕಟ್ಟಡ ನಿರ್ಮಾಣದ ಬಗ್ಗೆ architect ನ್ನು ಆಯ್ಕೆ ಮಾಡಲು Expression of Interest ಗಾಗಿ IIT-ಹೈದರಬಾದ್ ಸಂಸ್ಥೆಯವರು ಕರೆ ನೀಡಿರುತ್ತಾರೆ. ಆಯ್ಕೆಗೊಂಡ architect ರವರು ವಿಸ್ತೃತ ಕಾರ್ಯ ಯೋಜನಾ ವರದಿ [DPR] ಯನ್ನು ತಯಾರಿಸುತ್ತಾರೆ, ನಂತರ ಕೇಂದ್ರ ಸರ್ಕಾರವು ನಿಗದಿಪಡಿಸಿರುವ ಪದ್ಧತಿಯಂತೆ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಗುತ್ತಿಗೆದಾರರೊಬ್ಬರಿಗೆ ವಹಿಸಲಾಗುತ್ತದೆ. ನಿರ್ಮಾಣ ಕಾರ್ಯವು 2021 ರಲ್ಲಿ ಪ್ರಾರಂಭವಾಗುತ್ತದೆ ಹಾಗೂ ಮೊದಲ ಹಂತದ ನಿರ್ಮಾಣ ಕಾರ್ಯವು 2022 ರಲ್ಲಿ ಪೂರ್ಣಗೊಳ್ಳಲಿದ್ದು, 2023 ರ ಅಂತ್ಯಕ್ಕೆ ಸಂಪೂರ್ಣ ಕ್ಯಾಂಪಸ್ ಸಿದ್ಧಗೊಳ್ಳುವ ಸಂಭವವಿದೆ ಎಂದು IIT-ಹೈದರಾಬಾದ್ ರವರು ತಿಳಿಸಿರುತ್ತಾರೆ.
ಆ) ರಾಜ್ಯದಿಂದ ಆಯ್ಕೆ ಮಾಡಿಕೊಳ್ಳಬಹುದಾದಂತಹ ವಿದ್ಯಾರ್ಥಿಗಳ ಪ್ರಮಾಣ / ಮೀಸಲಾತಿಯ ಬಗ್ಗೆ ಮಾಹಿತಿ ನೀಡುವುದು?	Seat Matrix ಮತ್ತು ವಿದ್ಯಾರ್ಥಿಗಳ ಪ್ರವೇಶಕ್ಕಾಗಿ ಆಯ್ಕೆ ಪ್ರಕ್ರಿಯೆಯನ್ನು ಕೇಂದ್ರ ಸರ್ಕಾರದ ಶಿಕ್ಷಣ ಮಂತ್ರಾಲಯದ ವತಿಯಿಂದ ನಡೆಸಲಾಗುವ Joint Entrance Examination ಮೂಲಕ ಕೈಗೊಳ್ಳಲಾಗುತ್ತದೆ. ಪ್ರವೇಶಾತಿಯಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ OBC ವರ್ಗಗಳವರಿಗೆ ಮೀಸಲಾತಿ ಇರುತ್ತದೆ ಎಂದು IIT-ಹೈದರಬಾದ್ ಸಂಸ್ಥೆಯವರು ತಿಳಿಸಿರುತ್ತಾರೆ. ಕರ್ನಾಟಕ ರಾಜ್ಯದಿಂದ ಬರುವ ವಿದ್ಯಾರ್ಥಿ ಅಭ್ಯರ್ಥಿಗಳು ಸಹ ಆಯ್ಕೆಯಾಗುವ ಸಂಭವವಿದೆ.

(ಡಾ. ಅಶ್ವಥ್ ನಾರಾಯಣ್. ಸಿ.ಎನ್.)
ಉಪಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ,
ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ
ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು.

ಕಡತ ಸಂ: **ಐಟಿಬಿಟಿ 48 ಎಲ್.ಸಿ.ಎಂ 2020**

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 27
ಸದಸ್ಯರ ಹೆಸರು : ಶ್ರೀ ಉಮೇಶ್ ವಿಶ್ವನಾಥ್ ಕತ್ತಿ (ಹುಕ್ಕೇರಿ)
ಉತ್ತರಿಸುವ ದಿನಾಂಕ : 24-09-2020
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ಕ್ರ ಸಂ.	ಪ್ರಶ್ನೆ	ಉತ್ತರ
ಅ)	ಪ್ರಸ್ತುತ ವರ್ಷ ರಾಜ್ಯದಲ್ಲಿ ಹೊಸದಾಗಿ ಪದವಿ ಪೂರ್ವ ಕಾಲೇಜುಗಳನ್ನು ಮಂಜೂರು ಮಾಡಲು ಉದ್ದೇಶಿಸಲಾಗಿದೆಯೇ; ಹಾಗಿದ್ದಲ್ಲಿ, ಎಷ್ಟು ಕಾಲೇಜುಗಳನ್ನು ಸ್ಥಾಪನೆ ಮಾಡಲು ಉದ್ದೇಶಿಸಲಾಗಿದೆ (ಜಿಲ್ಲಾವಾರು ಮಾಹಿತಿ ನೀಡುವುದು);	ಹೌದು ಒಟ್ಟು 361 ಸರ್ಕಾರಿ ಪ್ರೌಢಶಾಲೆಗಳನ್ನು ಉನ್ನತೀಕರಿಸಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ. (ಜಿಲ್ಲಾವಾರು ಮಾಹಿತಿಯನ್ನು ಅನುಬಂಧದಲ್ಲಿ ಲಗತ್ತಿಸಿದೆ.)
ಆ)	ರಾಜ್ಯದಲ್ಲಿ ಹೊಸದಾಗಿ ಪದವಿ ಪೂರ್ವ ಕಾಲೇಜು ಮಂಜೂರು ಮಾಡಲು ಸರ್ಕಾರಕ್ಕೆ ಪ್ರಸ್ತಾವನೆಗಳೇನಾದರು ಸಲ್ಲಿಕೆಯಾಗಿವೆಯೇ; ಸ್ವೀಕೃತವಾಗಿದ್ದಲ್ಲಿ ಎಷ್ಟು ಕಾಲೇಜುಗಳಿಗೆ ಬೇಡಿಕೆ ಸಲ್ಲಿಸಲಾಗಿದೆ;	
ಇ)	ಹುಕ್ಕೇರಿ ವಿಧಾನ ಸಭಾ ಮತಕ್ಷೇತ್ರದ ವ್ಯಾಪ್ತಿಯ ಸಂಕೇಶ್ವರ ಪಟ್ಟಣದಲ್ಲಿ ಪದವಿ ಪೂರ್ವ ಕಾಲೇಜು ಮಂಜೂರಾತಿಗೆ ಬೇಡಿಕೆ ಬಂದಿದೆಯೇ;	ಬಂದಿದೆ.
ಈ)	ಬಂದಿದ್ದಲ್ಲಿ, ಸಂಕೇಶ್ವರದಲ್ಲಿ ಪದವಿ ಪೂರ್ವ ಕಾಲೇಜು ಮಂಜೂರು ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು?	ರಾಜ್ಯದ 361 ಸರ್ಕಾರಿ ಪ್ರೌಢ ಶಾಲೆಗಳನ್ನು ಉನ್ನತೀಕರಿಸಿ, ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನಾಗಿ ಉನ್ನತೀಕರಿಸಲು ಪ್ರಸ್ತಾವನೆ ಇದ್ದು, ಅದರಲ್ಲಿ ಸದರಿ ಕ್ರೋಢೀಕೃತ ಪ್ರಸ್ತಾವನೆಯಲ್ಲಿ ಹುಕ್ಕೇರಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಸಂಕೇಶ್ವರದಲ್ಲಿ ಪ್ರೌಢ ಶಾಲೆಯನ್ನು ಉನ್ನತೀಕರಿಸಿ, ಸರ್ಕಾರಿ ಪದವಿ ಪೂರ್ವ ಕಾಲೇಜನ್ನಾಗಿ ಉನ್ನತೀಕರಿಸಲು ಪ್ರಸ್ತಾವನೆ ಇದ್ದು, ಈ ಸಂಬಂಧ ಕೆಳಕಂಡ ಮಾಹಿತಿಗಳನ್ನು ಕ್ರೋಢೀಕರಿಸಲಾಗುತ್ತಿದ್ದು, ಸದರಿ ವಿವರಗಳನ್ನು ಪಡೆದ ನಂತರ ಆರ್ಥಿಕ ಇಲಾಖೆಯ ಸಹಮತಿಗೆ ಕಳುಹಿಸಲು ಕ್ರಮವಹಿಸಲಾಗುವುದು. 1) ಈ ಕಾಲೇಜುಗಳನ್ನು ಉನ್ನತೀಕರಿಸುವ ಬಗ್ಗೆ ಮಾನದಂಡಗಳು; 2) ಉನ್ನತೀಕರಿಸುವಂತಹ ಪ್ರದೇಶಗಳಲ್ಲಿ

35

		ಎಸ್.ಎಸ್.ಎಲ್.ಸಿ. ಯಿಂದ ಪದವಿ ಪೂರ್ವ ಶಿಕ್ಷಣಕ್ಕೆ ಬರುವ ವಿದ್ಯಾರ್ಥಿಗಳ ಪ್ರತಿಶತ(Average) ವಿವರಗಳು; 3) ಕೆ.ಪಿ.ಶಾಲೆಗಳಡಿ ಈ ಕಾಲೇಜುಗಳನ್ನು ಉನ್ನತೀಕರಿಸಲು ಇರುವ ಅವಕಾಶದ ಬಗ್ಗೆ ಮಾಹಿತಿ; 4) ಪದವಿ ಪೂರ್ವ ಕಾಲೇಜಿನಲ್ಲಿ ವಿದ್ಯಾರ್ಥಿಗಳ ಗರಿಷ್ಠ/ಕನಿಷ್ಠ ಸಂಖ್ಯೆಯ ವಿವರ; 5) ಉಪನ್ಯಾಸಕರ ವಿವರಗಳ ಬಗ್ಗೆ ಸ್ಪಷ್ಟ ಸಂಖ್ಯೆಯ/ಮೊತ್ತದ ಮಾಹಿತಿ;

ಸಂಖ್ಯೆ: ಇಪಿ 127 ಡಿಜಿಡಬ್ಲ್ಯೂ 2020

(ಎಸ್.ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು.

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	180
ಸದಸ್ಯರ ಹೆಸರು	:	ಶ್ರೀ ಕುಮಾರ ಬಂಗಾರಪ್ಪ ಎಸ್.(ಸೊರಬ)
ಉತ್ತರಿಸುವ ದಿನಾಂಕ	:	24.09.2020
ಉತ್ತರಿಸುವ ಸಚಿವರು	:	ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
(ಅ)	ಡಾ. ನಂಜುಂಡಪ್ಪ ವರದಿಯ ಪ್ರಕಾರ ಹಿಂದುಳಿದ ತಾಲ್ಲೂಕಾಗಿರುವ ಸೊರಬ ತಾಲ್ಲೂಕಿನಲ್ಲಿ, ಉನ್ನತ ಶಿಕ್ಷಣ ಇಲಾಖೆಯ ಕಾಲೇಜುಗಳಾದ ಸೊರಬದಲ್ಲಿರುವ ಪ್ರಥಮ ದರ್ಜೆ ಕಾಲೇಜು, ಪಾಲಿಟೆಕ್ನಿಕ್ ಕಾಲೇಜು, ಐಟಿಐ ಕಾಲೇಜು ಹಾಗೂ ಸೊರಬದ ಆನವಟ್ಟಿಯಲ್ಲಿರುವ ಪ್ರಥಮ ದರ್ಜೆ ಕಾಲೇಜುಗಳಿಗೆ ಸರ್ಕಾರದಿಂದ ಅನುದಾನ ಬಿಡುಗಡೆ ಮಾಡಿದ್ದರೂ ಕೂಡ ಕಾಮಗಾರಿಗಳು ಪ್ರಾರಂಭವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ದಿನಾಂಕ: 04-03-2020 ರಲ್ಲಿ ಸರ್ಕಾರಿ ಪಾಲಿಟೆಕ್ನಿಕ್, ಸೊರಬ ಸಂಸ್ಥೆಯಲ್ಲಿ ಹೆಚ್ಚುವರಿ ಕೊಠಡಿ, ವರ್ಕ್‌ಷಾಪ್ ಮತ್ತು ಪ್ರಯೋಗಾಲಯ ನಿರ್ಮಾಣ ಕಾಮಗಾರಿಯನ್ನು ಅಂದಾಜು ಮೊತ್ತ ರೂ.400.00 ಲಕ್ಷಗಳಲ್ಲಿ ನಿರ್ವಹಿಸಲು ಆದೇಶಿಸಿದೆ. ಸರ್ಕಾರಿ ಪಾಲಿಟೆಕ್ನಿಕ್, ಸೊರಬ ಸಂಸ್ಥೆಯಲ್ಲಿ ಹೆಚ್ಚುವರಿ ಕೊಠಡಿ, ವರ್ಕ್‌ಷಾಪ್ ಮತ್ತು ಪ್ರಯೋಗಾಲಯ ನಿರ್ಮಾಣ ಕಾಮಗಾರಿಯನ್ನು ಅಂದಾಜು ಮೊತ್ತ ರೂ.400.00 ಲಕ್ಷಗಳ ನಕ್ಷೆ ಮತ್ತು ಅಂದಾಜು ಪಟ್ಟಿ ಸಲ್ಲಿಸಿದ್ದು, ಅನುದಾನದ ಲಭ್ಯತೆ ಆಧರಿಸಿ ಆಡಳಿತಾತ್ಮಕ ಅನುಮೋದನೆ ನೀಡಲು ಕ್ರಮವಹಿಸಲಾಗುತ್ತಿದೆ. ಸೊರಬ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕಟ್ಟಡ ಕಾಮಗಾರಿಗೆ ಸಂಬಂಧಿಸಿದಂತೆ 2018-19ನೇ ಸಾಲಿನಲ್ಲಿ ಹೆಚ್ಚುವರಿ ತರಗತಿ ಕೊಠಡಿ ನಿರ್ಮಾಣಕ್ಕಾಗಿ ರೂ.75.00 ಲಕ್ಷಗಳು, ಗ್ರಂಥಾಲಯ ಕಟ್ಟಡ ನಿರ್ಮಾಣಕ್ಕಾಗಿ ರೂ.60.00ಲಕ್ಷಗಳು, ಪ್ರಯೋಗಾಲಯ ಕಟ್ಟಡ ನಿರ್ಮಾಣಕ್ಕಾಗಿ ರೂ.70.00ಲಕ್ಷಗಳು, ಶೌಚಾಲಯ ಹಾಗೂ ಮಹಿಳಾ ವಿಶ್ರಾಂತಿ ಗೃಹ ನಿರ್ಮಾಣಕ್ಕಾಗಿ ರೂ.30.00ಲಕ್ಷಗಳು ಹಾಗೂ ಆಡಿಟೋರಿಯಂ ನಿರ್ಮಾಣಕ್ಕಾಗಿ ರೂ.100.00ಲಕ್ಷಗಳು ಒಟ್ಟಾರೆ ರೂ.335.00 ಲಕ್ಷಗಳು ಅನುಮೋದನೆಯಾಗಿದ್ದು, ಈ ಕಾಮಗಾರಿಗಳಿಗೆ ಒಟ್ಟಾರೆ ರೂ.321.00 ಲಕ್ಷಗಳ ಪರಿಷ್ಕೃತ ಮೊತ್ತದಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ. ನಿರ್ಮಾಣ ಸಂಸ್ಥೆಗೆ ರೂ.302.00ಲಕ್ಷಗಳನ್ನು ಬಿಡುಗಡೆ ಮಾಡಲಾಗಿರುತ್ತದೆ. ನಿರ್ಮಾಣ ಸಂಸ್ಥೆಯ ವತಿಯಿಂದ ಸದರಿ ಕಾಮಗಾರಿಗೆ ಕೆಲವು ನಿರ್ಮಾಣ ಅಂಶಗಳನ್ನು ಪರಿಷ್ಕರಿಸಿ ರೂ.321.00 ಲಕ್ಷಗಳ ಪರಿಷ್ಕೃತ ಅಂದಾಜು ಪಟ್ಟಿ ತಯಾರಿಸಿ ಸಲ್ಲಿಸಿದ್ದು, ಪರಿಶೀಲಿಸಲಾಗುತ್ತಿದೆ. ಆನವಟ್ಟಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕಟ್ಟಡ ಕಾಮಗಾರಿಗೆ ಸಂಬಂಧಿಸಿದಂತೆ 2018-19ನೇ ಸಾಲಿನಲ್ಲಿ ಹೆಚ್ಚುವರಿ ತರಗತಿ ಕೊಠಡಿ ನಿರ್ಮಾಣಕ್ಕಾಗಿ ರೂ.75.00 ಲಕ್ಷಗಳು, ಶೌಚಾಲಯ ಹಾಗೂ ಮಹಿಳಾ ವಿಶ್ರಾಂತಿ ಗೃಹ ನಿರ್ಮಾಣಕ್ಕಾಗಿ ರೂ.30.00ಲಕ್ಷಗಳು ಅನುಮೋನೆಯಾಗಿದ್ದು, ಈ ಕಾಮಗಾರಿಗಳಿಗೆ ಒಟ್ಟು ರೂ.102.50 ಲಕ್ಷಗಳ ಪರಿಷ್ಕೃತ ಮೊತ್ತದಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ನಿರ್ಮಾಣ ಸಂಸ್ಥೆಗೆ ರೂ.90.00ಲಕ್ಷಗಳನ್ನು ಬಿಡುಗಡೆ ಮಾಡಲಾಗಿರುತ್ತದೆ. ನಿರ್ಮಾಣ ಸಂಸ್ಥೆಯ ವತಿಯಿಂದ ಟೆಂಡರ್ ಆಹ್ವಾನಿಸಿ, ಸ್ವೀಕರಿಸಿದ ಟೆಂಡರ್ ಪ್ರಕ್ರಿಯೆಯಲ್ಲಿದ್ದು, ಕೂಡಲೇ ಕಾಮಗಾರಿ ಪ್ರಾರಂಭಿಸಲಾಗುವುದು.

(ಆ)	ಉನ್ನತ ಶಿಕ್ಷಣ ಇಲಾಖೆ ವ್ಯಾಪ್ತಿಯಡಿ ಬರುವ ಕಾಲೇಜುಗಳಲ್ಲಿ ವಿದಾರ್ಥಿಗಳು, ಉಪನ್ಯಾಸಕರು ಹಾಗೂ ಸಿಬ್ಬಂದಿಗಳನ್ನು ಇ-ಹಾಜರಾತಿಗೆ ತರುವ ಹಾಗೂ ಪ್ರತಿಯೊಂದು ಕಾಲೇಜಿನಲ್ಲಿ ಸಿಸಿಟಿವಿಯನ್ನು ಕಡ್ಡಾಯವಾಗಿ ಅಳವಡಿಸುವ ಯೋಜನೆಯನ್ನು ಸರ್ಕಾರ ಹಮ್ಮಿಕೊಂಡಿದೆಯೇ;	**ಹೌದು** ಉನ್ನತ ಶಿಕ್ಷಣ ಇಲಾಖೆ ವ್ಯಾಪ್ತಿಯಡಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಪಾಲಿಟೆಕ್ನಿಕ್‌ಗಳು ಮತ್ತು ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಉಪನ್ಯಾಸಕರು ಹಾಗೂ ಸಿಬ್ಬಂದಿಗಳಿಗೆ ಬಯೋಮೆಟ್ರಿಕ್ ಹಾಜರಾತಿ ವ್ಯವಸ್ಥೆ ಜಾರಿಗೆ ತರಲಾಗಿದೆ ಹಾಗೂ ಸಂಸ್ಥೆಗಳಲ್ಲಿ ಸಿಸಿಟಿವಿಯನ್ನು ಅಳವಡಿಸಲಾಗಿದೆ. ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯ ಅಧೀನದಲ್ಲಿನ 364 ಕಛೇರಿ/ಕಾಲೇಜುಗಳಲ್ಲಿ ಇ-ಹಾಜರಾತಿ ವ್ಯವಸ್ಥೆಯನ್ನು (ಬಯೋಮೆಟ್ರಿಕ್) ಅನುಷ್ಠಾನಗೊಳಿಸಲಾಗಿದೆ. ಪ್ರಸ್ತುತ 2020-21ನೇ ಶೈಕ್ಷಣಿಕ ವರ್ಷದಲ್ಲಿ ಕೋವಿಡ್-19 ಸಾಂಕ್ರಾಮಿಕ ರೋಗದಿಂದ ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಗೆ ಬರುವ ಸರ್ಕಾರಿ ಪದವಿ ಕಾಲೇಜುಗಳು ಪ್ರಾರಂಭವಾಗುವುದು ವಿಳಂಬವಾಗಿದ್ದು, ಕಾಲೇಜುಗಳು ಪ್ರಾರಂಭವಾದ ನಂತರ ವಿದ್ಯಾರ್ಥಿಗಳು, ಉಪನ್ಯಾಸಕರು ಹಾಗೂ ಸಿಬ್ಬಂದಿಗಳನ್ನು ಇ-ಹಾಜರಾತಿಗೆ ತರುವ ಹಾಗೂ ಪ್ರತಿಯೊಂದು ಕಾಲೇಜಿನಲ್ಲಿ ಸಿಸಿಟಿವಿಯನ್ನು ಕಡ್ಡಾಯವಾಗಿ ಅಳವಡಿಸುವ ಕುರಿತು ಪರಿಶೀಲಿಸಲಾಗುತ್ತದೆ.
(ಇ)	ಪ್ರತಿಯೊಂದು ಕಾಲೇಜಿನಲ್ಲಿ ಕಡ್ಡಾಯವಾಗಿ "ಸ್ಮಾರ್ಟಕ್ಲಾಸ್" ಯೋಜನೆಯನ್ನು ಪ್ರಾರಂಭಿಸುವ ಯೋಜನೆಯನ್ನು ಸರ್ಕಾರ ಹಮ್ಮಿಕೊಂಡಿದೆಯೇ?	**ಹೌದು** **2020-21ನೇ ಸಾಲಿನಲ್ಲಿ ಡಿಜಿಟಲ್ ಲರ್ನಿಂಗ್ ಕಾರ್ಯಕ್ರಮದಡಿಯಲ್ಲಿ ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಅನುಮೋದನೆ ದೊರೆತಿದೆ.** ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಬರುವ 430 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು, 87 ಪಾಲಿಟೆಕ್ನಿಕ್ ಮತ್ತು 14 ಸರ್ಕಾರಿ ಎಂಜಿನಿಯರಿಂಗ್ ಕಾಲೇಜುಗಳಲ್ಲಿ ಡಿಜಿಟಲ್ ಕಲಿಕೆಯನ್ನು 2020-21ನೇ ಶೈಕ್ಷಣಿಕ ವರ್ಷದಿಂದ ಅನುಷ್ಠಾನಗೊಳಿಸಲು ಆದೇಶಿಸಲಾಗಿದೆ.

ಕಡತ ಸಂಖ್ಯೆ: ಇಡಿ 150 ಹೆಚ್‌ಪಿಸಿ 2020

(ಡಾ: ಅಶ್ವಥನಾರಾಯಣ ಸಿ.ಎನ್)
ಉಪ ಮುಖ್ಯಮಂತ್ರಿಗಳು ಹಾಗೂ
ಉನ್ನತ ಶಿಕ್ಷಣ ಸಚಿವರು

ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ, 7ನೇ ಅಧಿವೇಶನ)

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 184

2) ಸದಸ್ಯರ ಹೆಸರು : ಶ್ರೀ ಕುಮಾರಸ್ವಾಮಿ ಎಂ.ಪಿ. (ಮೂಡಿಗೆರೆ)

3) ಉತ್ತರಿಸುವ ದಿನಾಂಕ : 24-09-2020

4) ಉತ್ತರಿಸುವವರು : ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ಮೂಡಿಗೆರೆ ವಿಧಾನ ಸಭಾ ಕ್ಷೇತ್ರದಲ್ಲಿ ಆನೆಗಳ ಹಾವಳಿ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು. ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ ವಿಧಾನಸಭಾ ಕ್ಷೇತ್ರದ ದೇವರುಂದ, ಬನಕಲ್, ಭಾರತಿಬೆಲು, ಕಸಬಾ ಹೋಬಳಿಗಳಲ್ಲಿ ಇತ್ತೀಚಿನ ದಿನಗಳಲ್ಲಿ ಕಾಡುಪ್ರಾಣಿಗಳು, ಅದರಲ್ಲೂ ಮುಖ್ಯವಾಗಿ ಕಾಡಾನೆಗಳ ಹಾವಳಿ ಹೆಚ್ಚಾಗಿರುತ್ತದೆ.
ಆ)	ಬಂದಿದ್ದಲ್ಲಿ, ಆನೆಗಳಿಂದ ಹತರಾದ ರೈತರೆಷ್ಟು; ಹಾಗೂ ಆಸ್ತಿ-ಪಾಸ್ತಿ ನಷ್ಟ ಎಷ್ಟು; ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ; (ಕಳೆದ ಮೂರು ವರ್ಷಗಳ ವಿವರ ನೀಡುವುದು)	ಕಳೆದ ಮೂರು ವರ್ಷಗಳಲ್ಲಿ ಮೂಡಿಗೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಕಾಡಾನೆ ದಾಳಿಯಿಂದ ಉಂಟಾದ ಮಾನವ ಪ್ರಾಣ ಹಾನಿ ಹಾಗೂ ಆಸ್ತಿ ನಷ್ಟ ಪ್ರಕರಣಗಳು ಈ ಕೆಳಕಂಡಂತಿದೆ: (ರೂಗಳಲ್ಲಿ)

(ರೂಗಳಲ್ಲಿ)

ಕ್ರ ಸಂ	ವರ್ಷ	ಮಾನವ ಪ್ರಾಣಹಾನಿ		ಆಸ್ತಿ ನಷ್ಟ	
		ಪ್ರಕರಣ	ಮೊತ್ತ	ಪ್ರಕರಣ	ಮೊತ್ತ
1	2017-18	-	-	19	1,25,636.00
2	2018-19	01	5,00,000.00	28	1,51,276.00
3	2019-20	01	5,00,000.00	21	1,76,918.00
4	2020-21 (ಆಗಸ್ಟ್-2020 ರವರೆಗೆ)	-	-	-	-

- ವನ್ಯಪ್ರಾಣಿಗಳ ದಾಳಿಯಿಂದ ಉಂಟಾಗುವ ಮಾನವ ಪ್ರಾಣಹಾನಿ ಪ್ರಕರಣಗಳಲ್ಲಿ ಆದೇಶ ಸಂಖ್ಯೆ: ಅಪಜೀ 66 ಎಫ್‌ಡಬ್ಲ್ಯೂಎಲ್ 2019 ದಿನಾಂಕ: 07-01-2020ರ ಪ್ರಕಾರ ಮೃತಪಡುವ ವ್ಯಕ್ತಿಯ ಕುಟುಂಬದ ವಾರಸುದಾರರಿಗೆ ಪಾವತಿಸುತ್ತಿದ್ದ ದಯಾತ್ಮಕ ಧನವನ್ನು ರೂ.5,00,000.00 ಗಳಿಂದ ರೂ.7,50,000.00 ಗಳಿಗೆ ಹೆಚ್ಚಿಸಲಾಗಿದೆ. ಅದರಂತೆ, ನಿಯಮಾನುಸಾರ ಪರಿಶೀಲಿಸಿ ದಯಾತ್ಮಕ ಧನವನ್ನು ಪಾವತಿಸಲಾಗುತ್ತಿದೆ.

ಕ್ರ.ಸಂ	ಪ್ರಶ್ನೆ	ಉತ್ತರ
		• ಅಲ್ಲದೆ, ಆದೇಶ ಸಂಖ್ಯೆ: ಅಪಜೀ 61 ಎಫ್‌ಎಪಿ 2018 ದಿನಾಂಕ: 16/10/2018 ರಂತೆ ಮೃತರ ಕುಟುಂಬದ ವಾರಸುದಾರರಿಗೆ 05 ವರ್ಷಗಳವರೆಗೆ ರೂ.2,000.00 ಗಳ ಮಾಸಾಶನವನ್ನು ಸಹ ನೀಡಲಾಗುತ್ತಿದೆ. • ವನ್ಯಪ್ರಾಣಿಗಳ ದಾಳಿಯಿಂದ ಉಂಟಾಗುವ ಆಸ್ತಿ ನಷ್ಟ ಪ್ರಕರಣಗಳಲ್ಲಿ ಆದೇಶ ಸಂಖ್ಯೆ: ಅಪಜೀ 130 ಎಫ್‌ಡಬ್ಲ್ಯೂಎಲ್ 2016 ದಿನಾಂಕ: 19.09.2016 ರಂತೆ ನಿಯಮಾನುಸಾರ ಪರಿಶೀಲಿಸಿ ಪ್ರತಿ ಪ್ರಕರಣದಲ್ಲಿ ಗರಿಷ್ಠ ರೂ.10,000.00 ಗಳನ್ನು ಪಾವತಿಸಲಾಗುತ್ತಿದೆ.
ಇ)	ಸದರಿ ಕ್ಷೇತ್ರದಲ್ಲಿ ಎಷ್ಟು ಎಕರೆ ಪ್ರದೇಶವನ್ನು 4/1 ಮಾಡಲಾಗಿದೆ;	ಚಿಕ್ಕಮಗಳೂರು ವಿಭಾಗಕ್ಕೆ ಸಂಬಂಧಿಸಿದಂತೆ, ಮೂಡಿಗೆರೆ ವಿಧಾನ ಸಭಾ ಕ್ಷೇತ್ರದಲ್ಲಿನ ಒಟ್ಟು 1197.46 ಹೆ. ಪ್ರದೇಶವನ್ನು ಸೆಕ್ಷನ್ 4 ಅಧಿಸೂಚಿತ ಅರಣ್ಯವೆಂದು ಘೋಷಿಸಲಾಗಿರುತ್ತದೆ. ಕೊಪ್ಪ ವಿಭಾಗಕ್ಕೆ ಸಂಬಂಧಿಸಿದಂತೆ, ಮೂಡಿಗೆರೆ ವಿಧಾನಸಭಾ ಕ್ಷೇತ್ರದ ಕೊಪ್ಪ ಅರಣ್ಯ ವಿಭಾಗ ವ್ಯಾಪ್ತಿಯಲ್ಲಿ ಕರ್ನಾಟಕ ಅರಣ್ಯ ಕಾಯ್ದೆ 1963 ಕಲಂ 4(1)ರಡಿ 9405.19 ಎಕರೆ ಅರಣ್ಯ ಪ್ರದೇಶವನ್ನು ಮೀಸಲು ಅರಣ್ಯ ಪ್ರದೇಶವೆಂದು ಅಧಿಸೂಚನೆ ಹೊರಡಿಸಲಾಗಿರುತ್ತದೆ.
ಈ)	ಆಗಿದ್ದಲ್ಲಿ, ಈ ಪ್ರದೇಶಗಳಲ್ಲಿ ರೈತರು ಅನಾದಿ ಕಾಲದಿಂದಲೂ ಬೇಸಾಯ ಮಾಡಿರುವುದು ಮತ್ತು ವಾಸಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ರೈತರ ಅನುಕೂಲಕ್ಕಾಗಿ 4/1ನ್ನು ಯಾವಾಗ ಹಿಂಪಡೆಯಲಾಗುವುದು ?	ಕಲಂ–4ರಲ್ಲಿ ಘೋಷಿತವಾದ ನಂತರ ಅರಣ್ಯ ವ್ಯವಸ್ಥಾಪನಾಧಿಕಾರಿಗಳು ಕರ್ನಾಟಕ ಅರಣ್ಯ ಕಾಯ್ದೆ ಕಲಂ–5ರಿಂದ 17ರ ವರೆಗೆ ಕ್ರಮ ಜರುಗಿಸಿ, ಅಹವಾಲುಗಳನ್ನು ಸ್ವೀಕರಿಸಿ ಹಕ್ಕು ಮತ್ತು ಬಾಧ್ಯತೆಗಳನ್ನು ಪರಿಗಣಿಸಿ ಕಲಂ–17ರಲ್ಲಿ ಘೋಷಿಸಲಾಗುತ್ತದೆ. ಅರ್ಹ ಹಕ್ಕುಗಳು ಕಂಡುಬಂದಲ್ಲಿ ಕಲಂ–4ರ ಅಧಿಸೂಚನೆಯಿಂದ ಕೈ ಬಿಡಲು ಅರಣ್ಯ ವ್ಯವಸ್ಥಾಪನಾಧಿಕಾರಿಗಳಿಗೆ ಅಧಿಕಾರವಿರುತ್ತದೆ. ಕೊಪ್ಪ ವಿಭಾಗಕ್ಕೆ ಸಂಬಂಧಿಸಿದಂತೆ, ಕರ್ನಾಟಕ ಅರಣ್ಯ ಕಾಯ್ದೆ 1963 ಕಲಂ 4(1)ರಡಿ ಅರಣ್ಯ ಪ್ರದೇಶವನ್ನು ಗುರುತಿಸುವ ಸಂದರ್ಭದಲ್ಲಿ ಕಂದಾಯ ಮತ್ತು ಅರಣ್ಯ ಇಲಾಖೆಯಿಂದ ಜಂಟಿ ಮೋಜಣಿ ಮಾಡಿ ಅರ್ಹತ ರೈತರ ಖಾಸಗಿ ಜಮೀನನ್ನು ಹೊರತುಪಡಿಸಿ ಅಧಿಸೂಚನೆ ಹೊರಡಿಸಲಾಗಿರುತ್ತದೆ. ಸೆಕ್ಷನ್ 4(1)ರಂತೆ ಮೀಸಲು ಅರಣ್ಯ ಪ್ರದೇಶವೆಂದು ಅಧಿಸೂಚನೆಗೊಂಡ ನಂತರ ಸೆಕ್ಷನ್–17ರಡಿ ಮೀಸಲು ಅರಣ್ಯವೆಂದು ಘೋಷಣೆ ಮಾಡುವ ಸಂಬಂಧ ಅರಣ್ಯ ವ್ಯವಸ್ಥಾಪನಾಧಿಕಾರಿಗಳನ್ನು ನೇಮಕಾತಿ ಮಾಡಿದ್ದು, ರೈತರ ಯಾವುದಾದರೂ ಕ್ಲೈಮುಗಳಿದ್ದಲ್ಲಿ ಸರ್ಕಾರವು ನೇಮಿಸಿರುವ ಅರಣ್ಯ ವ್ಯವಸ್ಥಾಪನಾಧಿಕಾರಿಯವರು ವಿಚಾರಣೆ ನಡೆಸಿ ಇತ್ಯರ್ಥಪಡಿಸಲು ಅವಕಾಶವಿರುತ್ತದೆ.

ಸಂಖ್ಯೆ: ಅಪಜೀ 155 ಎಫ್‌ಡಬ್ಲ್ಯೂಎಲ್ 2020

(ಆನಂದ್ ಸಿಂಗ್)

ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	518
ಸದಸ್ಯರ ಹೆಸರು	:	ಶ್ರೀ ಲಾಲಾಜಿ.ಆರ್. ಮೆಂಡನ್ (ಕಾಪು)
ಉತ್ತರಿಸಬೇಕಾದ ದಿನಾಂಕ	:	24-09-2020
ಉತ್ತರಿಸುವ ಸಚಿವರು	:	ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ಕ್ರಸಂ	ಪ್ರಶ್ನೆ	ಉತ್ತರ
ಅ)	ರಾಜ್ಯದ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಶಾಲೆಗಳಲ್ಲಿ ನಡೆಸಲಾಗುವ ಮಧ್ಯಾಹ್ನದ ಬಿಸಿಯೂಟ, ಅನ್ನ ದಾಸೋಹ ಕಾರ್ಯಕ್ರಮ ಅನುಷ್ಠಾನದಲ್ಲಿನ ಸಮಸ್ಯೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ;	ಯಾವುದೇ ಗಂಭೀರ ಸಮಸ್ಯೆ ಇಲ್ಲ.
ಆ)	ಬಿಸಿ ಊಟ ಯೋಜನೆಯ ಕಾರ್ಯಕರ್ತರ ಬೇಡಿಕೆ/ ಸಮಸ್ಯೆಗಳು ಸರ್ಕಾರದ ಗಮನಕ್ಕೆ ಬಂದಿವೆಯೇ;	ಬಿಸಿಯೂಟ ಯೋಜನೆಯ ಕಾರ್ಯಕರ್ತರ ಬೇಡಿಕೆಗಳು ಸರ್ಕಾರದ ಗಮನಕ್ಕೆ ಬಂದಿದೆ.
ಇ)	ಬಂದಿದ್ದಲ್ಲಿ, ನೌಕರರು ತಮ್ಮ ಗೌರವಧನ ಭತ್ಯೆ ಹೆಚ್ಚಳ ಹಾಗೂ ಇತರೆ ಮೂಲಭೂತ ಬೇಡಿಕೆ ಮುಂದಿಟ್ಟು ನಡೆಸಿದ ಮುಷ್ಕರದ ಸಂದರ್ಭದಲ್ಲಿ ಈ ಹಿಂದೆ ಸರ್ಕಾರದ ನೀಡಿದ ವಾಗ್ದಾನದ ಅನುಷ್ಠಾನದಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು?	ಮುಖ್ಯ ಬೇಡಿಕೆಯಾದ ಮಧ್ಯಾಹ್ನ ಉಪಹಾರ ಯೋಜನೆಯಡಿ ಕರ್ತವ್ಯ ನಿರ್ವಹಿಸುತ್ತಿರುವ ಮುಖ್ಯ ಅಡುಗೆಯವರ ಮಾಸಿಕ ಸಂಭಾವನೆಯನ್ನು ರೂ 6000/-ಕ್ಕೆ ಮತ್ತು ಸಹಾಯಕ ಅಡುಗೆಯವರು ಮಾಸಿಕ ಸಂಭಾವನೆಯನ್ನು ರೂ 5000/-ಕ್ಕೆ ಪರಿಷ್ಕರಿಸಲು ಆರ್ಥಿಕ ಇಲಾಖೆಯ ಸಹಮತಿ ಕೋರಿ ಪ್ರಸ್ತಾವನೆಯನ್ನು ಸಲ್ಲಿಸಲಾಗಿರುತ್ತದೆ. ಆದರೆ ಈಗಾಗಲೇ ರಾಜ್ಯ ಸರ್ಕಾರವು ತನ್ನ ಪಾಲಿಗಿಂತ ಹೆಚ್ಚುವರಿಯಾಗಿ ಮುಖ್ಯ ಅಡುಗೆಯವರಿಗೆ ರೂ 2100/- ಮತ್ತು ಸಹಾಯಕ ಅಡುಗೆಯವರಿಗೆ ರೂ 2000/-ಗಳನ್ನು ಪಾವತಿಸಲಾಗುತ್ತಿರುವುದರಿಂದ ಮತ್ತು ಕೇಂದ್ರ ಸರ್ಕಾರವು ತನ್ನ ಪಾಲಿನ ಸಂಭಾವನೆಯನ್ನು ಹೆಚ್ಚಳ ಮಾಡದ ಹೊರತು ರಾಜ್ಯ ಸರ್ಕಾರವು ಮತ್ತೊಮ್ಮೆ ಹೆಚ್ಚಳ ಮಾಡಲು ಸಾಧ್ಯವಿರುವುದಿಲ್ಲವೆಂದು ಹಾಗೂ ಪ್ರಸ್ತುತ ಕೋವಿಡ್-19 ಮಾಹಾಮಾರಿಯಿಂದಾಗಿ ರಾಜ್ಯ ಸರ್ಕಾರವು ಆರ್ಥಿಕ ಸಂಕಷ್ಟ ಅನುಭವಿಸುತ್ತಿದ್ದು ಇಂತಹ ಸಮಯದಲ್ಲಿ ಆರ್ಥಿಕ ಹೊರೆಯಾಗುವ ಪ್ರಸ್ತಾವನೆಗಳನ್ನು ಆರ್ಥಿಕ ಇಲಾಖೆಗೆ ಸಲ್ಲಿಸದಿರುವಂತೆ ಸೂಚನೆ ನೀಡಿ ಆರ್ಥಿಕ ಇಲಾಖೆಯಿಂದ ಪ್ರಸ್ತಾವನೆ ತಿರಸ್ಕೃತಗೊಂಡಿರುತ್ತದೆ. ಮುಖ್ಯ ಅಡುಗೆಯವರು ಮಾಸಿಕ ಸಂಭಾವನೆಯನ್ನ ರೂ 6000/-ಕ್ಕೆ ಹಾಗೂ ಸಹಾಯಕ ಅಡುಗೆಯವರು ಮಾಸಿಕ ಸಂಭಾವನೆಯನ್ನು

		ರೂ 5000/-ಕ್ಕೆ ಪರಿಷ್ಕರಿಸಿ ಅದಕ್ಕೆ ಅನುಗುಣವಾಗಿ ಕೇಂದ್ರ ಸರ್ಕಾರದ ಪಾಲಿನ ಅನುದಾನವನ್ನು ಬಿಡುಗಡೆ ಮಾಡುವಂತೆ ಕೋರಿ ಕೇಂದ್ರ ಸರ್ಕಾರದ ಮಾನವ ಸಂಪನ್ಮೂಲ ಮತ್ತು ಅಭಿವೃದ್ಧಿ ಸಚಿವರಿಗೆ ಪತ್ರ ಬರೆಯಲಾಗಿದೆ. 18 ರಿಂದ 40 ವರ್ಷ ವರ್ಷದೊಳಗಿನ ಎಲ್ಲಾ ಅಡುಗೆ ಸಿಬ್ಬಂದಿಗಳಿಗೆ ಕೇಂದ್ರ ಸರ್ಕಾರದ ಪ್ರಧಾನ ಮಂತ್ರಿ ಶ್ರಮ್ ಯೋಗಿ ಮಾನ್-ಧನ್ ಪಿಂಚಣಿ ಯೋಜನೆಯಡಿಯಲ್ಲಿ ನೋಂದಾಯಿಸಿಕೊಂಡು ಅಡುಗೆ ಸಿಬ್ಬಂದಿಗೆ 60 ವರ್ಷ ಪೂರ್ಣಗೊಂಡ ನಂತರ ಮಾಸಿಕ ರೂ 3000/-ಗಳ ಪಿಂಚಣಿ ಸೌಲಭ್ಯವನ್ನು ಪಡೆಯಲು ಅವಕಾಶವಿದ್ದು ಈ ಯೋಜನೆಯಡಿ ಅಡುಗೆ ಸಿಬ್ಬಂದಿಗಳನ್ನು ನೋಂದಾಯಿಸಲು ಕ್ರಮವಹಿಸಲಾಗಿದೆ. ಅಡುಗೆ ಸಿಬ್ಬಂದಿಗಳಿಗೆ ಕರ್ತವ್ಯದ ಅವಧಿಯಲ್ಲಿ ಅಪಘಾತ/ಅವಘಡ ಸಂಭವಿಸಿದ್ದಲ್ಲಿ ಈ ಕೆಳಕಂಡಂತೆ ಪರಿಹಾರ ಒದಗಿಸಲಾಗುತ್ತದೆ. • ಸರ್ಕಾರದ ಆದೇಶ ಸಂಖ್ಯೆ : ಇಡಿ 92 ಎಂ.ಎಂ.ಎಸ್ 2009, ಬೆಂಗಳೂರು, ದಿನಾಂಕ : 22.02.2010 (ಇಡಿ ಸ್ಕೀಮರ(ಯುನಿಕ್) 2010, ದಿನಾಂಕ : 22.02.2009) ರನ್ವಯ ಅಡುಗೆ ಸಿಬ್ಬಂದಿಯವರು ಅಡುಗೆ ಕೆಲಸ ನಿರ್ವಹಿಸುವ ಸಂದರ್ಭದಲ್ಲಿ ಸುಟ್ಟಗಾಯಗಳಾಗಿದಲ್ಲಿ ರೂ.30,000/-, ಶಾಶ್ವತ ಅಂಗವಿಕಲತೆ ಉಂಟಾದಲ್ಲಿ ಗರಿಷ್ಠ ರೂ.75,000/- ಮತ್ತು ಸುಟ್ಟಗಾಯಗಳಾಗಿ ಮರಣ ಹೊಂದಿದ ಸಂದರ್ಭದಲ್ಲಿ ರೂ.1,00,000/-ಗಳ ಪರಿಹಾರವನ್ನು ನೀಡಲಾಗುತ್ತಿದೆ. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವತಿಯಿಂದ ಅನುಷ್ಠಾನಗೊಂಡಿರುವ "ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ" ಯೋಜನೆಯಡಿ ಅಡುಗೆಯವರು ನೋಂದಾಯಿಸಿಕೊಂಡು ಹೆಲ್ತ್‌ಕಾರ್ಡ್ ಪಡೆದು ಉಚಿತ ಆರೋಗ್ಯ ಸೇವೆಗಳನ್ನು ಪಡೆಯಲು ಕ್ರಮವಹಿಸಲಾಗಿದೆ.

ಇಪಿ 42 ಎಂಎಂಎಸ್ 2020

(ಎಸ್. ಸುರೇಶ್ ಕುಮಾರ್)

ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು

<u>ಕರ್ನಾಟಕ ವಿಧಾನ ಸಭೆ</u>

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	**519**
ಮಾನ್ಯ ಸದಸ್ಯರ ಹೆಸರು	:	**ಶ್ರೀ ಲಾಲಾಜಿ ಆರ್. ಮೆಂಡನ್**
ಉತ್ತರಿಸಬೇಕಾದ ದಿನಾಂಕ	:	**24.09.2020**
ಉತ್ತರಿಸಬೇಕಾದ ಸಚಿವರು	:	**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು**

ಕ್ರ. ಸಂ	ಪ್ರಶ್ನೆಗಳು	ಉತ್ತರ
ಅ)	ಭಯಾನಕ ಕೊರೋನ ಕಾಯಿಲೆ ನಿಯಂತ್ರಣದ ಸಮಯದಲ್ಲಿ ತಳಮಟ್ಟದಲ್ಲಿ ಸೇನಾನಿಗಳಂತೆ ಶ್ರಮವಹಿಸಿ ದುಡಿದ ಆಶಾ ಕಾರ್ಯಕರ್ತೆಯರ ನ್ಯಾಯ ಸಮ್ಮತ ಮೂಲಭೂತ ಬೇಡಿಕೆ ಈಡೇರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;	ಕೋವಿಡ್-19 ಸಾಂಕ್ರಾಮಿಕ ನಿಯಂತ್ರಣ ಚಟುವಟಿಕೆಗಳಲ್ಲಿ ಭಾಗಿಯಾಗಿರುವ ಆಶಾ ಕಾರ್ಯಕರ್ತೆಯರ ಬೇಡಿಕೆಗಳನ್ನು ಈಡೇರಿಸುವ ನಿಟ್ಟಿನಲ್ಲಿ ಸರ್ಕಾರವು ಈ ಕೆಳಕಂಡ ಕ್ರಮಗಳನ್ನು ತೆಗೆದುಕೊಂಡಿದೆ. 1. ಆಶಾ ಕಾರ್ಯಕರ್ತೆಯರ ಮೇಲಿನ ಹಲ್ಲೆಗಳಿಗೆ ಸಂಬಂಧಿಸಿದಂತೆ ಸಾಮೂಹಿಕ ಕಾರ್ಯನಿರ್ವಹಣೆಗೆ ಅನುವಾಗುವಂತೆ ಕ್ರಮವಹಿಸಲು ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. 2. ಕೋವಿಡ್-19 ಸಾಂಕ್ರಾಮಿಕದ ಹಿನ್ನೆಲೆಯಲ್ಲಿ ಆಶಾ ಕಾರ್ಯಕರ್ತೆಯರಿಗೆ ಸುರಕ್ಷಾ ಸಾಮಾಗ್ರಿಗಳಾದ ಮುಖಗವಸು, ಕೈಗವಸು ಹಾಗೂ ಸಾನಿಟೈಸರ್‌ಗಳನ್ನು ಅವರವರ ಬೇಡಿಕೆಗೆ ಅನುಗುಣವಾಗಿ ಜಿಲ್ಲಾಡಳಿತದಿಂದ ನೀಡಲು ಸೂಚನೆ ನೀಡಲಾಗಿದೆ. ಒಂದು ವೇಳೆ ಈ ಸಾಮಗ್ರಿಗಳನ್ನು ಲಭ್ಯವಿಲ್ಲದಿದ್ದಲ್ಲಿ ಸಾರ್ವಜನಿಕ ಆರೋಗ್ಯ ಸಂಸ್ಥೆಗಳಾದ ಪ್ರಾಥಮಿಕ ಆರೋಗ್ಯ ಕೇಂದ್ರ/ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಆರೋಗ್ಯ ರಕ್ಷಾ ಸಮಿತಿಯ ಮುಕ್ತ ನಿಧಿಯಿಂದ ಆಡಳಿತ ವೈದ್ಯಾಧಿಕಾರಿಗಳು ಖರೀದಿಸಿ ನೀಡಲು ಸೂಚಿಸಲಾಗಿದೆ. 3. ಉಚಿತ ಚಿಕಿತ್ಸೆಗೆ ಪೂರಕವಾದ ಕ್ರಮಗಳನ್ನು ಅನುಸರಿಸಲು ಸೂಚಿಸಲಾಗಿದೆ. ಇವರ ಬೇಡಿಕೆಗಳನ್ನು ಆದ್ಯತೆಯ ಮೇಲೆ ಕಾಲಕಾಲಕ್ಕೆ ಪೂರೈಸಲಾಗುತ್ತಿದೆ.
ಆ)	ನೌಕರರ ವಿವಿಧ ವರ್ಗ/ಸ್ತರಗಳ ನೌಕರರ ಗೌರವ ಧನದಲ್ಲಿ ತಾರತಮ್ಯತೆ ಇರುವುದು ನಿಜವೇ; ಹಾಗಿದ್ದರೇ ಯಾವಾಗ ಸದರಿ ತಾರತಮ್ಯವನ್ನು ಸರಿಪಡಿಸಲಾಗುವುದು;	ಆಶಾ ಕಾರ್ಯಕರ್ತೆಯರು ಸ್ವಯಂ ಸೇವಾ ನೆಲೆಗಟ್ಟಿನಲ್ಲಿ ಕಾರ್ಯ ನಿರ್ವಹಿಸುತ್ತಿರುವ ವರಾಗಿರುತ್ತಾರೆ (ASHA is a Social Activist) ಹಾಗೂ ನೌಕರರ ವರ್ಗಕ್ಕೆ ಸೇರುವುದಿಲ್ಲ.

...2

ಇ)	ಆಶಾ ಕಾರ್ಯಕರ್ತೆಯರ ಮತ್ತು ಇತರರ ವೇತನ ಪರಿಷ್ಕರಣೆ ವಿಶೇಷ ಭತ್ಯೆ, ವಿಮೆ, ಪಿಂಚಣಿ, ಪ್ರಾವಿಡೆಂಟ್ ಫಂಡ್ ಸೌಲಭ್ಯಗಳನ್ನು ಕಲ್ಪಿಸುವಲ್ಲಿನ ಸರ್ಕಾರದ ನಿಲುವೇನು?	1. ಆಶಾ ಕಾರ್ಯಕರ್ತೆಯರು ಸ್ವಯಂ ಸೇವಾ ನೆಲೆಗಟ್ಟಿನಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಇವರಿಗೆ ರಾಷ್ಟ್ರೀಯ ಆರೋಗ್ಯ ಅಭಿಯಾನದಿಂದ ಪ್ರೋತ್ಸಾಹಧನ ಮತ್ತು ರಾಜ್ಯ ಸರ್ಕಾರದಿಂದ ಮಾಸಿಕ ಗೌರವಧನವನ್ನು ನೀಡಲಾಗುತ್ತಿದೆ. ಇವರಿಗೆ ನೀಡುವ ಈ ಸೌಲಭ್ಯಗಳು ಸಂಪೂರ್ಣವಾಗಿ ಕಾರ್ಯನಿರ್ವಹಣೆಗೆ ಒಳಪಟ್ಟಿವೆ. 2. ಕಾಲಕಾಲಕ್ಕೆ ಪ್ರೋತ್ಸಾಹಧನದ ಮೊತ್ತವು ಪರಿಷ್ಕರಣೆಯಾಗುತ್ತಿದ್ದು, ಹೊಸ ಕಾರ್ಯಕ್ರಮಗಳು ಸೇರ್ಪಡೆಯಾದ ಸಂಧರ್ಭದಲ್ಲಿ ಪ್ರೋತ್ಸಾಹಧನವನ್ನು ನೀಡಲಾಗುತ್ತದೆ. ಇದೇ ರೀತಿ ಕೋವಿಡ್-19 ಸಾಂಕ್ರಾಮಿಕ ರೋಗ ನಿಯಂತ್ರಣ ಚಟುವಟಿಕೆಗಳಿಗೂ ಕೂಡ ಮಾಸಿಕ ರೂ.1000/- ರೂಪಾಯಿಗಳ ಹೆಚ್ಚುವರಿ ಪ್ರೋತ್ಸಾಹಧನವನ್ನು ನೀಡಲಾಗುತ್ತಿದೆ. 3. ಆಶಾ ಕಾರ್ಯಕರ್ತೆಯರಿಗೆ ಸನ್ಮಾನ್ಯ ಪ್ರಧಾನ ಮಂತ್ರಿಗಳ ಸಾಮಾಜಿಕ ಸುರಕ್ಷಾ ವಿಮಾ ಯೋಜನೆಗಳಾದ ಪ್ರಧಾನ ಮಂತ್ರಿ ಜೀವನ ಜ್ಯೋತಿ, ಭೀಮಾ ಯೋಜನಾ ಮತ್ತು ಪ್ರಧಾನ ಮಂತ್ರಿ ಸುರಕ್ಷಾ ಭೀಮಾ ಯೋಜನೆಯಡಿ ತಲಾ ರೂ. 2,00,000/-ಗಳ ವಿಮಾ ಸೌಲಭ್ಯವನ್ನು ನೀಡಲಾಗಿದೆ. 4. ಅಸಂಘಟಿತ ವಲಯದ ಕಾರ್ಮಿಕರಿಗೆ ಪಿಂಚಣಿ ನೀಡಲು ರೂಪಿಸಿರುವ ಪ್ರಧಾನ ಮಂತ್ರಿ ಶ್ರಮಯೋಗಿ ಮಾನ್ ಧನ್ ಯೋಜನೆಯ ವ್ಯಾಪ್ತಿಗೆ ಆಶಾ ಕಾರ್ಯಕರ್ತೆಯರನ್ನು ತರಲಾಗಿದೆ. ಈ ಯೋಜನೆಗೆ ಸೇರ್ಪಡೆಯಾಗುವ ಆಶಾ ಕಾರ್ಯಕರ್ತೆಯರು ಶೇ.50 ರಷ್ಟು ವಂತಿಗೆಯನ್ನು ಭರಿಸಬೇಕಾಗಿದ್ದು, ಇನ್ನುಳಿದ ಶೇ.50 ರಷ್ಟು ವಂತಿಗೆಯನ್ನು ಕೇಂದ್ರ ಸರ್ಕಾರವು ಭರಿಸಲಿದೆ. 5. ಆಶಾ ಕಾರ್ಯಕರ್ತೆಯರು ಸ್ವಯಂ-ಸೇವಾ ನೆಲಗಟ್ಟಿನಲ್ಲಿ ಕಾರ್ಯನಿರ್ವಹಿಸುತ್ತಿರುವುದ್ದರಿಂದ **Provident Fund** ಅಂತಹ ಶಾಸನಾತ್ಮಕ ಉಪಕ್ರಮಗಳ ಪರಿಧಿಗೆ ಇವರು ಬರುವುದಿಲ್ಲ. ಬದಲಾಗಿ ಕಾಲಕಾಲಕ್ಕೆ ಸರ್ಕಾರವು ರೂಪಿಸುವಂತ ಕಲ್ಯಾಣಪರ ಯೋಜನೆಗಳಡಿ ಇವರನ್ನು ಸೇರ್ಪಡೆಗೊಳಿಸಲಾಗುವುದು.

ಸಂಖ್ಯೆ: ಆಕುಕ 49 ಎಸ್.ಟಿ.ಕ್ಯೂ 2020

(ಬಿ. ಶ್ರೀರಾಮುಲು)

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ

ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : 537
ಸದಸ್ಯರ ಹೆಸರು : ಶ್ರೀ. ನಿಂಬಣ್ಣನವರ್ ಸಿ.ಎಂ (ಕಲಘಟಗಿ)
ಉತ್ತರಿಸಬೇಕಾದ ದಿನಾಂಕ : 24.09.2020
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ಕ್ರಸಂ	ಪ್ರಶ್ನೆ	ಉತ್ತರ
ಅ.	ಶಿಕ್ಷಣ ಇಲಾಖೆಯಲ್ಲಿ ವಯೋ ನಿವೃತ್ತಿ/ಮರಣ ಮುಂತಾದ ಕಾರಣಗಳಿಂದ ದೀರ್ಘಕಾಲದಿಂದ ಖಾಲಿಯಿರುವ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ;	ಸರ್ಕಾರಿ ಆದೇಶ ಸಂಖ್ಯೆ:ಇಡಿ 14 ಎಸ್.ಇ.ಪಿ 2017, ದಿನಾಂಕ:06.03.2019ರಲ್ಲಿ ಈಗಾಗಲೇ ದಿನಾಂಕ:31.12.2015ರ ವರೆಗೆ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಅನುಮತಿ ನೀಡಲಾಗಿತ್ತು. ಈಗಾಗಲೇ ಸಾಕಷ್ಟು ಹುದ್ದೆಗಳನ್ನು ಭರ್ತಿ ಮಾಡಲಾಗಿದೆ. • ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ 2015-16ನೇ ಸಾಲಿನಲ್ಲಿ ಒಟ್ಟು 9511 ಶಿಕ್ಷಕರ ಹುದ್ದೆಗಳನ್ನು ಅಧಿಸೂಚಿಸಲಾಗಿದ್ದು, 7905 ಶಿಕ್ಷಕರ ನೇಮಕಾತಿ ಮಾಡಲಾಗಿದೆ. • 2017-18ನೇ ಸಾಲಿನಲ್ಲಿ 10000 ಪದವೀಧರ ಪ್ರಾಥಮಿಕ ಶಿಕ್ಷಕರ ಹುದ್ದೆಗಳನ್ನು ಅಧಿಸೂಚಿಸಲಾಗಿದ್ದು, ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ನೇಮಕಾತಿಗೆ ಅರ್ಹರಾದ 3389 ಅಭ್ಯರ್ಥಿಗಳನ್ನು ನೇಮಕಾತಿ ಮಾಡಿಕೊಳ್ಳಲಾಗಿದೆ. • 2018-19ನೇ ಸಾಲಿನಲ್ಲಿ 10000 ಹುದ್ದೆಗಳಲ್ಲಿ ಮಿಕ್ಕುಳಿದ 6611 ಹಾಗೂ 2018-19ನೇ ಸಾಲಿಗೆ ಭರ್ತಿ ಮಾಡಲು ಅನುಮತಿ ನೀಡಲಾದ 4000 ಹುದ್ದೆಗಳು ಸೇರಿದಂತೆ ಒಟ್ಟು 10611 ಉದ್ದೇಶಿತ ಹುದ್ದೆಗಳು, ಅದರಲ್ಲಿ 10565 ಪದವೀಧರ ಪ್ರಾಥಮಿಕ ಶಿಕ್ಷಕರ ಹುದ್ದೆಗಳಿಗೆ ನೇಮಕಾತಿಗೆ ದಿನಾಂಕ:05/03/2019 ಅಧಿಸೂಚಿಸಲಾಗಿತ್ತು, ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ನೇಮಕಾತಿಗೆ ಅರ್ಹರಾದ 1994 ಅಭ್ಯರ್ಥಿಗಳನ್ನು ನೇಮಕಾತಿ ಮಾಡಿಕೊಳ್ಳಲಾಗಿದೆ ಮತ್ತು ದೈಹಿಕ ಶಿಕ್ಷಕರ ಭರ್ತಿಗೆ ಸಂಬಂಧಿಸಿದಂತೆ, ರಾಜ್ಯದ ಸರ್ಕಾರಿ ಪ್ರೌಢಶಾಲೆಗಳಲ್ಲಿ ಖಾಲಿಯಿರುವ ವಿವಿಧ ವೃಂದದ ಒಟ್ಟು 5500 ಹುದ್ದೆಗಳ ಪೈಕಿ ನೇರ ನೇಮಕಾತಿಯಿಂದ ಭರ್ತಿ ಮಾಡಬೇಕಾಗಿರುವುದು ಪರಿಶೀಲನೆಯಲ್ಲಿರುತ್ತದೆ. ಪ್ರಸ್ತುತ ಕೋವಿಡ್-19ರ ಹಿನ್ನೆಲೆಯಲ್ಲಿ ಆರ್ಥಿಕ ಇಲಾಖೆಯಿಂದ ಹೊರಡಿಸಲಾಗಿರುವ ಸುತ್ತೋಲೆ ಸಂಖ್ಯೆ: ಆಇ 157 ವೆಚ್ಚ-8/2020, ದಿನಾಂಕ:10/06/2020ರಲ್ಲಿ ಆರ್ಥಿಕ ಮಿತವ್ಯಯ ಸಾಧಿಸುವ ಸಲುವಾಗಿ ಈ ಕೆಳಕಂಡಂತೆ ಕ್ರಮಕೈಗೊಳ್ಳಲು ಸೂಚಿಸಲಾಗಿರುತ್ತದೆ. • 2020-21ನೇ ಸಾಲಿನಲ್ಲಿ ಯಾವುದೇ ಹೊಸ

		ಅನುದಾನರಹಿತ ವಿದ್ಯಾ ಸಂಸ್ಥೆಗಳನ್ನು ವೇತನಾನುದಾನಕ್ಕೊಳಪಡಿಸುವಂತಿಲ್ಲ. • ಅನುದಾನಿತ ಸಂಸ್ಥೆಗಳಲ್ಲಿ ನಿವೃತ್ತಿ, ನಿಧನ, ರಾಜೀನಾಮೆ ಇತರೆ ಯಾವುದೇ ಕಾರಣಗಳಿಂದ ಖಾಲಿ ಉಂಟಾಗುವ ಹುದ್ದೆಗಳನ್ನು 2020-21ನೇ ಸಾಲಿನಲ್ಲಿ ಭರ್ತಿ ಮಾಡುವಂತಿಲ್ಲ. ಸದರಿ ನಿಯಮವು ಈಗಾಗಲೇ ಭರ್ತಿ ಮಾಡಲು ಆರ್ಥಿಕ ಇಲಾಖೆಯು ಸಹಮತಿಸಿರುವ ಪ್ರಕರಣಗಳಿಗೂ ಸಹ ಅನ್ವಯಿಸತಕ್ಕದ್ದು. • ಅನುದಾನಿತ ಸಂಸ್ಥೆಗಳಲ್ಲಿ ಖಾಲಿ ಉಂಟಾಗುವ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಹೊಸದಾಗಿ ಸಹಮತಿ ನೀಡುವಂತಿಲ್ಲ. • ಈ ಎಲ್ಲಾ ನಿಯಮಗಳು ಸರ್ಕಾರದ ಎಲ್ಲಾ ಇಲಾಖೆಗಳಡಿಯಲ್ಲಿ ಬರುವ ಅನುದಾನಿತ ಶಿಕ್ಷಣ ಸಂಸ್ಥೆಗಳಿಗೆ/ವಸತಿ ನಿಲಯಗಳಿಗೆ ಹಾಗೂ ಈಗಾಗಲೇ ವೇತನಾನುದಾನಕ್ಕೊಳಪಡಿಸಲು ಸ್ವೀಕೃತಗೊಂಡಿರುವ ಮತ್ತು ಸ್ವೀಕೃತಗೊಳ್ಳುವ ಅನುದಾನಿತ ಶಿಕ್ಷಣ ಸಂಸ್ಥೆಗಳು ಸೇರಿದಂತೆ, ಇನ್ನುಳಿದ ಅನುದಾನಿತ ಸಂಸ್ಥೆಗಳಿಗೂ ಸಹ ಅನ್ವಯಿಸತಕ್ಕದ್ದು. ಮೇಲ್ಕಂಡಂತೆ ಆರ್ಥಿಕ ಇಲಾಖೆಯು ನಿರ್ದೇಶನ ನೀಡಿರುವುದರಿಂದ ಯಾವುದೇ ಬೋಧಕ ಹಾಗೂ ಬೋಧಕೇತರ ಹುದ್ದೆಗಳನ್ನು ವೇತನಾನುದಾನಕ್ಕೊಳಪಡಿಸಲು ಸಾಧ್ಯವಾಗುತ್ತಿಲ್ಲ. ಪ್ರಸ್ತಾಪಿತ ಆರ್ಥಿಕ ಮಿತವ್ಯಯ ಆದೇಶವನ್ನು ಸಡಿಲಿಸಿದ ನಂತರ ಖಾಲಿಯಿರುವ ಅರ್ಹ ಹುದ್ದೆಗಳನ್ನು ವೇತನಾನುದಾನಕ್ಕೊಳಪಡಿಸಲು ಪರಿಶೀಲಿಸಲಾಗುವುದು. ಬಡ್ತಿಗೆ ಸಂಬಂಧಿಸಿದಂತೆ, ಬೋಧಕ ಮತ್ತು ಬೋಧಕೇತರ ವೃಂದದ ಹುದ್ದೆಗಳನ್ನು ಕೌನ್ಸಿಲಿಂಗ್ ಮೂಲಕ ಸ್ಥಳ ನಿಯುಕ್ತಿಗೊಳಿಸಲಾಗುತ್ತಿದೆ.
ಆ.	ಸಿಬ್ಬಂದಿ ಕೊರತೆಯಿಂದಾಗಿ ಗುಣಮಟ್ಟದ ಶಿಕ್ಷಣ ನೀಡಲು ಸಾಧ್ಯವಾಗುತ್ತಿಲ್ಲವೆನ್ನುವುದು ಸರ್ಕಾರದ ಗಮನಕ್ಕಿದಿಯೇ;	ರಾಜ್ಯ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಕಾಲಕಾಲಕ್ಕೆ ಅರ್ಹ ಅತಿಥಿ ಶಿಕ್ಷಕರನ್ನು ತಾತ್ಕಲಿಕವಾಗಿ ನೇಮಕಾತಿ ಮಾಡಿಕೊಂಡು ಬೋಧನೆ ಮಾಡಿಸುವ ಮೂಲಕ ವಿದ್ಯಾರ್ಥಿಗಳ ಕಲಿಕೆಗೆ ಯಾವುದೇ ವ್ಯತಿರಿಕ್ತ ಪರಿಣಾಮ ಉಂಟಾಗದಂತೆ ಕ್ರಮವಹಿಸಲಾಗುತ್ತಿದೆ.

ಸಂಖ್ಯೆ: ಇಪಿ 145 ಎಸ್‌ಓಹೆಚ್ 2020

(ಎಸ್. ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು

ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ, 7ನೇ ಅಧಿವೇಶನ)

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 936

2) ಸದಸ್ಯರ ಹೆಸರು : ಶ್ರೀ ಮಂಜುನಾಥ್ ಎ. (ಮಾಗಡಿ)

3) ಉತ್ತರಿಸುವ ದಿನಾಂಕ : 24-09-2020

4) ಉತ್ತರಿಸುವವರು : ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು

ಕ್ರಸಂ	ಪ್ರಶ್ನೆ	ಉತ್ತರ
ಅ)	ಮಾಗಡಿ ತಾಲ್ಲೂಕು ಹೆಚ್ಚಾಗಿ ಗುಡ್ಡಗಾಡು ಹಾಗೂ ಅರಣ್ಯ ಪ್ರದೇಶಗಳನ್ನು ಒಳಗೊಂಡಿರುವುದರಿಂದ ಚಿರತೆ ಸಂತತಿಯು ಹೆಚ್ಚಾಗುತ್ತಿದ್ದು ಮನುಷ್ಯರು ಹಾಗೂ ಜಾನುವಾರುಗಳನ್ನು ಬಲಿ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು.
ಆ)	ಕಳೆದ 3 ವರ್ಷಗಳಲ್ಲಿ ಚಿರತೆ ದಾಳಿಯಿಂದ ಮೃತಪಟ್ಟ ಮನುಷ್ಯರ ಹಾಗೂ ಜಾನುವಾರುಗಳ ಸಂಖ್ಯೆ ಎಷ್ಟು; ಇವರುಗಳಿಗೆ ಸರ್ಕಾರದಿಂದ ವಿತರಣೆ ಮಾಡಲಾಗಿರುವ ಪರಿಹಾರ ಎಷ್ಟು; (ಸಂಪೂರ್ಣ ಮಾಹಿತಿ ಒದಗಿಸುವುದು);	ಕಳೆದ 3 ವರ್ಷಗಳಲ್ಲಿ ಮಾಗಡಿ ತಾಲ್ಲೂಕಿನಲ್ಲಿ ಉಂಟಾದ ಮಾನವ-ಪ್ರಾಣಹಾನಿ ಹಾಗೂ ಪಾವತಿಸಲಾದ ದಯಾತ್ಮಕ ಧನದ ವಿವರ ಈ ಕೆಳಕಂಡಂತಿದೆ.

ವರ್ಷ	ಮಾನವ-ಪ್ರಾಣ ಹಾನಿ	
	ಮೃತಪಟ್ಟವರ ವಿವರ	ಪಾವತಿಸಿದ ಮೊತ್ತ
2017-18	ಶ್ರೀಮತಿ ಪುಟ್ಟಹಲಗಮ್ಮ ಕೋಂ ಶಿವಪ್ಪ ಚಿಕ್ಕಸೂಲಿಕೆರೆ ಗ್ರಾಮ, ರಾಮನಗರ.	5,00,000.00
2018-19	ಯಾವುದೇ ಪ್ರಕರಣ ದಾಖಲಾಗಿರುವುದಿಲ್ಲ.	
2019-20	ಯಾವುದೇ ಪ್ರಕರಣ ದಾಖಲಾಗಿರುವುದಿಲ್ಲ.	
2020-21	1) ಶ್ರೀ ಹೇಮಂತ್ ಡಿ ಸಿ ಕದರಯ್ಯನಪಾಳ್ಯ ಗ್ರಾಮ, ಕಸಬಾ ಹೋಬಳಿ, ಮಾಗಡಿ ತಾಲ್ಲೂಕು.	7,50,000.00
	2) ಶ್ರೀಮತಿ ಗಂಗಮ್ಮ, ಕೊತ್ತಗೊಂಡನಹಳ್ಳಿ ಗ್ರಾಮ, ಸೋಲೂರು ಹೋಬಳಿ, ಮಾಗಡಿ ತಾಲ್ಲೂಕು.	7,50,000.00
	ಒಟ್ಟು	**15,00,000.00**

ಕ್ರ.ಸಂ	ಪ್ರಶ್ನೆ	ಉತ್ತರ
		ಕಳೆದ 3 ವರ್ಷಗಳಲ್ಲಿ ಮಾಗಡಿ ತಾಲ್ಲೂಕಿನಲ್ಲಿ ವನ್ಯಪ್ರಾಣಿ ಹಾವಳಿಯಿಂದ ಉಂಟಾದ ಸಾಕುಪ್ರಾಣಿ ಹತ್ಯೆ ಹಾಗೂ ಪಾವತಿಸಲಾದ ದಯಾತ್ಮಕ ಧನದ ವಿವರ ಈ ಕೆಳಕಂಡಂತಿದೆ.

ವರ್ಷ	ಸಾಕುಪ್ರಾಣಿ ಹತ್ಯೆ	
	ಪ್ರಕರಣ	ಮೊತ್ತ ರೂಗಳಲ್ಲಿ
2017–18	179	15,48,529.00
2018–19	191	15,11,594.00
2019–20	156	9,07,270.00
2020–21	84	6,54,000.00

ಕ್ರ.ಸಂ	ಪ್ರಶ್ನೆ	ಉತ್ತರ
ಇ)	ಕಾಡು ಪ್ರಾಣಿಗಳ ದಾಳಿಯಿಂದಾಗಿ ಮೃತಪಟ್ಟ ಕುಟುಂಬದವರಿಗೆ ನಿಗದಿಪಡಿಸಿರುವ ಪರಿಹಾರದ ಮೊತ್ತ ಎಷ್ಟು ಹಾಗೂ ಯಾವ ವರ್ಷದಿಂದ ನೀಡಲಾಗುತ್ತಿದೆ;	ವನ್ಯಪ್ರಾಣಿ ದಾಳಿಯಿಂದ ಉಂಟಾಗುವ ಮಾನವ-ಪ್ರಾಣ ಹಾನಿ ಪ್ರಕರಣಗಳಿಗೆ ಆದೇಶ ಸಂಖ್ಯೆ: ಅಪಜೀ 143 ಎಫ್‌ಡಬ್ಲ್ಯೂಎಲ್ 2010, ದಿನಾಂಕ: 03.08.2011ರ ಪ್ರಕಾರ ರೂ.5,00,000.00 ಲಕ್ಷಗಳನ್ನು ಮೃತಪಟ್ಟ ಕುಟುಂಬದ ವಾರಸುದಾರರಿಗೆ ಪಾವತಿಸಲಾಗುತ್ತಿರುತ್ತದೆ.
ಈ)	ಪ್ರಸ್ತುತ ವಿತರಣೆ ಮಾಡಲಾಗುತ್ತಿರುವ ಪರಿಹಾರದ ಮೊತ್ತವನ್ನು ಹೆಚ್ಚಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ; ಇದ್ದಲ್ಲಿ ಎಷ್ಟು ಮೊತ್ತವನ್ನು ಹೆಚ್ಚಿಸಲಾಗುವುದು;	ಪ್ರಸ್ತುತ ಆದೇಶ ಸಂಖ್ಯೆ: ಅಪಜೀ 66 ಎಫ್‌ಡಬ್ಲ್ಯೂಎಲ್ 2019 ದಿನಾಂಕ: 07.01.2020ರ ಪ್ರಕಾರ ವನ್ಯಪ್ರಾಣಿಗಳ ದಾಳಿಯಿಂದ ಮೃತಪಡುವ ವ್ಯಕ್ತಿಯ ವಾರಸುದಾರರಿಗೆ ಪಾವತಿಸುತ್ತಿದ್ದ ದಯಾತ್ಮಕ ಧನವನ್ನು ರೂ.5,00,000/- ಗಳಿಂದ ರೂ.7,50,000/- ಗಳಿಗೆ ಹೆಚ್ಚಿಸಿ ಆದೇಶಿಸಲಾಗಿದೆ. ಅದರಂತೆ, ನಿಯಮಾನುಸಾರ ಪರಿಶೀಲಿಸಿ ದಯಾತ್ಮಕ ಧನವನ್ನು ಪಾವತಿಸಲಾಗುತ್ತಿದೆ. ಅಲ್ಲದೇ, ಆದೇಶ ಸಂಖ್ಯೆ: ಅಪಜೀ 61 ಎಫ್‌ಎಪಿ 2018 ದಿನಾಂಕ: 16.10.2018 ರಂತೆ ಮೃತರ ಕುಟುಂಬದ ವಾರಸುದಾರರಿಗೆ 05 ವರ್ಷಗಳವರೆಗೆ ರೂ.2,000/-ಗಳ ಮಾಸಾಶನವನ್ನು ಸಹ ನೀಡಲಾಗುತ್ತಿದೆ.
ಉ)	ಚಿರತೆ ದಾಳಿಯನ್ನು ತಡೆಯಲು ಸರ್ಕಾರವು ತೆಗೆದುಕೊಂಡ ಕ್ರಮಗಳೇನು?	ಚಿರತೆ ಹಾವಳಿಯನ್ನು ತಡೆಯಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ. 1. ಕಾಡಂಚಿನಲ್ಲಿ ಬರುವ ಗ್ರಾಮಗಳಲ್ಲಿ ಚಿರತೆ ಹಾವಳಿಯನ್ನು ತಡೆಯಲು ಚಿರತೆ ಬೋನುಗಳನ್ನು ಇಡಲಾಗಿದೆ. 2. ಸ್ಥಳೀಯ ಸಿಬ್ಬಂದಿ ಮತ್ತು ಕ್ಯಾಂಪ್ ವಾಚರ್‌ಗಳ ಮೂಲಕ ರಾತ್ರಿ ಪಹರೆಯನ್ನು ಮಾಡಲಾಗುತ್ತಿದೆ. 3. ಚಿರತೆ ಹಾವಳಿ ಪ್ರದೇಶಗಳನ್ನು ಗುರುತಿಸಿ ಜನ ಸಂಪರ್ಕ ಸಭೆ ನಡೆಸಿ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

ಸಂಖ್ಯೆ: ಅಪಜೀ 149 ಎಫ್‌ಡಬ್ಲ್ಯೂಎಲ್ 2020

(ಆನಂದ್ ಸಿಂಗ್)
ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು

ಕರ್ನಾಟಕ ವಿಧಾನಸಭೆ

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1226
2. ಸದಸ್ಯರ ಹೆಸರು	:	ಶ್ರೀ. ಬಸನಗೌಡ ಆರ್ ಪಾಟೀಲ್ (ಯತ್ನಾಳ್) (ವಿಜಯಪುರ ನಗರ)
3. ಉತ್ತರಿಸಬೇಕಾದ ದಿನಾಂಕ	:	24-09-2020.
4. ಉತ್ತರಿಸುವ ಸಚಿವರು	:	ಮಾನ್ಯ ಮುಖ್ಯಮಂತ್ರಿಯವರು

<table>
<tr><th>ಕ್ರ.ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ಕೊರೋನಾ ವೈರಸ್ ಹರಡುವಿಕೆ ನಂತರ ರಾಜ್ಯದ ಆರ್ಥಿಕ ಪರಿಸ್ಥಿತಿಯು ಹಾಲಿ ಸುಸ್ಥಿತಿಯಲ್ಲಿದೆಯೇ; (ವಿವರ ನೀಡುವುದು)</td><td>ಕೊರೋನಾ ವೈರಸ್ ಹರಡುವಿಕೆ ನಂತರ ರಾಜ್ಯದ ರಾಜಸ್ವ ಸ್ವೀಕೃತಿಗಳು ಕಡಿಮೆಯಾಗಿರುತ್ತವೆ. ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ನೀಡಬೇಕಾಗಿರುವ GST ಪರಿಹಾರ ಧನ ಕಡಿತಗೊಂಡಿದೆ. ಆದಾಗ್ಯೂ, ಲಾಕ್‌ಡೌನ್ ತೆರವಿನ ನಂತರ ಆರ್ಥಿಕ ಚಟುವಟಿಕೆಗಳು ಪುನರಾರಂಭಗೊಂಡಿರುವುದರಿಂದ ರಾಜ್ಯದ ಆರ್ಥಿಕ ಪರಿಸ್ಥಿತಿ ಸುಧಾರಣೆಯತ್ತ ಸಾಗಿದೆ.</td></tr>
<tr><td>ಆ</td><td>ಸದರಿ ಖಾಯಿಲೆಯಿಂದ, ಸರ್ಕಾರಧ ಬೊಕ್ಕಸಕ್ಕೆ ಆಗಿರುವ ನಷ್ಟ ಎಷ್ಟು; ನಷ್ಟವನ್ನು ಸರಿದೂಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;</td><td>2020-21ನೇ ಸಾಲಿನಲ್ಲಿ ರಾಜ್ಯದಲ್ಲಿ ಈ ಕೆಳಕಂಡಂತೆ ಪ್ರಮುಖ ತೆರಿಗೆ ಸಂಗ್ರಹಣೆಯ ಕುಂಠಿತವಾಗಿರುತ್ತದೆ.

(ರೂ. ಕೋಟಿಗಳಲ್ಲಿ)
<table>
<tr><th>ಕ್ರ.ಸಂ.</th><th>ವಿವರ</th><th>2020-21ನೇ ಸಾಲಿನ ಗುರಿ</th><th>ಜುಲೈ2020ರ ಅಂತ್ಯದವರೆಗೆ ಸಂಗ್ರಹವಾದ ತೆರಿಗೆ (ಮಹಾಲೇಖಪಾಲರ ಲೆಕ್ಕದನ್ವಯ)</th></tr>
<tr><td>1</td><td>ವಾಣಿಜ್ಯ ತೆರಿಗೆ</td><td>66327.00</td><td>13773.29</td></tr>
<tr><td>2</td><td>ರಾಜ್ಯ ಅಬಕಾರಿ</td><td>22700.00</td><td>5864.00</td></tr>
<tr><td>3</td><td>ನೋಂದಣಿ ಮತ್ತು ಮುದ್ರಾಂಕ</td><td>12655.00</td><td>1881.37</td></tr>
<tr><td>4</td><td>ಸಾರಿಗೆ</td><td>7114.84</td><td>941.54</td></tr>
<tr><td>5</td><td>ಇತರೆ</td><td>3193.99</td><td>138.68</td></tr>
<tr><td></td><td>ಒಟ್ಟು</td><td>111990.83</td><td>22598.88</td></tr>
</table>

ಆರ್ಥಿಕ ನಷ್ಟವನ್ನು ಸುಧಾರಿಸಲು ರಾಜ್ಯ ಸರ್ಕಾರವು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಅವುಗಳ ಪೈಕಿ ಪ್ರಮುಖ ಕ್ರಮಗಳ ಮಾಹಿತಿ ಈ ಕೆಳಕಂಡಂತೆ ಇರುತ್ತವೆ:
1. ಸಂಪನ್ಮೂಲಗಳ ಕ್ರೂಢೀಕರಣಕ್ಕೆ ಹೆಚ್ಚಿನ ಒತ್ತು ನೀಡುವುದು.
2. ಅನಗತ್ಯ ವೆಚ್ಚಗಳಿಗೆ ಕಡಿವಾಣ ಹಾಕುವುದು.
3. ಕೇಂದ್ರ ಸರ್ಕಾರವು ಅನುವು ಮಾಡಿಕೊಡುವಷ್ಟು ಸಾಲವನ್ನು ಪಡೆಯುವುದು.</td></tr>
</table>

ಇ	ಕೊರೋನಾ ವೈರಸ್ ಹೆಸರಿನಲ್ಲಿ ಸರ್ಕಾರ ಅಭಿವೃದ್ಧಿ ಕಾಮಗಾರಿಗಳಿಗೆ ಹಣ ಮಂಜೂರು ಮಾಡಲು ತಡೆ ಒಡ್ಡಿರುವುದು ನಿಜವೇ; ಇದರಿಂದ, ರಾಜ್ಯದ ಅಭಿವೃದ್ಧಿ ಕುಂಠಿತಗೊಳ್ಳುವುದಿಲ್ಲವೇ; ಯಾವ ವಲಯಗಳಲ್ಲಿ ಅಭಿವೃದ್ಧಿ ಕುಂಠಿತಗೊಂಡಿದೆ? (ಸಂಪೂರ್ಣ ವಿವರ ನೀಡುವುದು)	ಹೌದು. ಕೋವಿಡ್-19ನಿಂದಾಗಿ ರಾಜ್ಯದಲ್ಲಿ ಉಂಟಾಗಿರುವ ಆರ್ಥಿಕ ಪರಿಸ್ಥಿತಿಯನ್ನು ಸುಧಾರಿಸಲು ಆರಂಭದಲ್ಲಿ ಕಾರ್ಯಾರಂಭ ಮಾಡದೇ ಇರುವ ಕಾಮಗಾರಿಗಳನ್ನು ಮಾತ್ರ ತಡೆಹಿಡಿಯಲಾಗಿದ್ದು, ಈಗಾಗಲೇ ಕಾಮಗಾರಿಯು ಭೌತಿಕವಾಗಿ ಕಾರ್ಯಾರಂಭಗೊಂಡಿರುವ ಎಲ್ಲಾ ಕಾಮಗಾರಿಗಳನ್ನು ಮುಂದುವರೆಸಬಹುದಾಗಿದೆ. ಕೋವಿಡ್-19ರ ಲಾಕ್‌ಡೌನ್‌ನಿಂದಾಗಿ ಆರ್ಥಿಕ ಕೊರತೆ ಹಾಗೂ ಕಾರ್ಮಿಕರ ಅಲಭ್ಯತೆಯಿಂದಾಗಿ ಕೆಲವು ಕಾಮಗಾರಿಗಳು ಕುಂಠಿತಗೊಂಡಿದ್ದು, ಲಾಕ್‌ಡೌನ್ ತೆರವಿನ ನಂತರ ಕಾರ್ಯಗತಗೊಳ್ಳುತ್ತಿವೆ.

ಸಂಖ್ಯೆ: ಆಇ 48 ಬಿಜಿಎಲ್ 2020

(ಬಿ.ಎಸ್. ಯಡಿಯೂರಪ್ಪ)

ಮುಖ್ಯಮಂತ್ರಿ

ಕರ್ನಾಟಕ ವಿಧಾನ ಸಭೆ

1)	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1228
2)	ಮಾನ್ಯ ಸದಸ್ಯರ ಹೆಸರು	ಶ್ರೀ ರಾಮದಾಸ್ ಎಸ್. ಎ. (ಕೃಷ್ಣರಾಜ)
3)	ಉತ್ತರಿಸಬೇಕಾದ ದಿನಾಂಕ	24/09/2020
4)	ಉತ್ತರಿಸುವವರು	**ಮಾನ್ಯ ಉಪ ಮುಖ್ಯಮಂತ್ರಿಗಳು ಮತ್ತು ಉನ್ನತ ಶಿಕ್ಷಣ, ಐಟಿ/ಬಿಟಿ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು.**

ಪ್ರಶ್ನೆ	ಉತ್ತರ
(ಅ) ರಾಜ್ಯದಲ್ಲಿ ಕೋವಿಡ್-19 ಪರಿಸ್ಥಿತಿಯಲ್ಲಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಡಿ ವಿವಿಧ ಉದ್ಯಮಗಳಲ್ಲಿ ಉದ್ಯೋಗ ಕಳೆದುಕೊಂಡವರ ಸಂಖ್ಯೆ ಎಷ್ಟು; ಕಲಿಕೆ ಪೂರ್ಣಗೊಳಿಸಿ ಉದ್ಯೋಗಕ್ಕಾಗಿ ಕಾಯುತ್ತಿರುವ ಯುವಕ ಯುವತಿಯರ ಸಂಖ್ಯೆ ಎಷ್ಟು;	ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಡಿ ಯಾವುದೇ ಉದ್ಯಮಗಳು ಇರುವುದಿಲ್ಲ. ರಾಜ್ಯದ ಕೋವಿಡ್-19 ಪರಿಸ್ಥಿತಿಯಿಂದಾಗಿ ಉದ್ಯೋಗ ಕಳೆದುಕೊಂಡಿರುವ ಬಗ್ಗೆ ನಿಖರವಾದ ಅಂಕಿಅಂಶಗಳನ್ನು ಸಂಗ್ರಹಿಸಲು ಸಾಧ್ಯವಿಲ್ಲವೆಂದು ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ ತಿಳಿಸಿದೆ. ಆದರೆ ಜಿಲ್ಲೆಗಳ ಕೈಗಾರಿಕಾ ಸಂಘ ಸಂಸ್ಥೆಗಳು ಇಲಾಖಾಧಿಕಾರಿಗಳಿಂದ ಸಂಗ್ರಹಿಸಿದ ಮಾದರಿ ಸಮೀಕ್ಷೆಯ ಪ್ರಕಾರ ರಾಜ್ಯದಲ್ಲಿರುವ ಕೈಗಾರಿಕೆಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದ ಉದ್ಯೋಗಿ / ಕಾರ್ಮಿಕರ ಪೈಕಿ ಉದ್ಯೋಗ ಕಳೆದುಕೊಂಡವರ ಸಂಖ್ಯೆ 4,50,000 ಇರಬಹುದು ಇದು ಒಟ್ಟು ಉದ್ಯೋಗಿಗಳ ಶೇ 9-10 ಆಗಿರುತ್ತದೆ. ಇದು ಪ್ರಮುಖವಾಗಿ ಬೇರೆ ರಾಜ್ಯಗಳಿಂದ ಕರ್ನಾಟಕ ರಾಜ್ಯಕ್ಕೆ ಬಂದು ವಿವಿಧ ಕೈಗಾರಿಕೆಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದು ವಲಸೆ ಕಾರ್ಮಿಕರನ್ನು ಒಳಗೊಂಡಿರುತ್ತದೆ ಎಂದು ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ ತಿಳಿಸಿದೆ. 2019-20ನೇ ಸಾಲಿನಲ್ಲಿ 1.18 ಲಕ್ಷ ಅಭ್ಯರ್ಥಿಗಳು ಕಲಿಕೆ ಪೂರ್ಣಗೊಳಿಸಿರುವರು ಈ ಪೈಕಿ 22006 ಅಭ್ಯರ್ಥಿಗಳನ್ನು ಉದ್ಯೋಗ ನಿಯುಕ್ತಿಗೊಳಿಸಲಾಗಿದ್ದು ಇನ್ನುಳಿದವರು ಉದ್ಯೋಗವಕಾಶ ಒದಗಿಬೇಕಾಗಿದೆ.
(ಆ) ಇಲಾಖೆ ವಿವಿಧ ಯೋಜನೆಯಡಿಯಲ್ಲಿ ಯಾವ ಯಾವ ರೀತಿಯ ತರಬೇತಿಗಳನ್ನು ನೀಡಲಾಗುತ್ತಿದೆ; ಇವರ ಜೀವನೋಪಾಯಕ್ಕಾಗಿ ಸರ್ಕಾರ ಕೈಗೊಳ್ಳುತ್ತಿರುವ ಕ್ರಮಗಳೇನು; ಇದಕ್ಕಾಗಿ ಸರ್ಕಾರವು ಮೀಸಲಿಟ್ಟಿರುವ ಹಣ ಎಷ್ಟು?	**ಕೌಶಲ್ಯ ಮಿಷನ್** ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಡಿ ಮುಖ್ಯಮಂತ್ರಿಗಳ ಕೌಶಲ್ಯ ಕರ್ನಾಟಕ ಯೋಜನೆ (ಸಿಎಂಕೆಕೆವೈ) ರಡಿ 610 ಜಾಬ್ ರೋಲ್‌ಗಳಲ್ಲಿ ಮತ್ತು ಪ್ರಧಾನ ಮಂತ್ರಿಗಳ ಕೌಶಲ್ಯ ವಿಕಾಸ್ ಯೋಜನೆಗಳನ್ನು (ಪಿಎಂಕೆವಿವೈ) 277 ಜಾಬ್ ರೋಲ್‌ಗಳಲ್ಲಿ ರಾಜ್ಯದ ನಿರುದ್ಯೋಗ ಯುವಕ-ಯುವತಿಯರಿಗೆ ಅಲ್ಪಾವಧಿ ಕೌಶಲ್ಯ ತರಬೇತಿಗಳನ್ನು ನೀಡಲಾಗುತ್ತಿದೆ. ತರಬೇತಿ ನೀಡಿದ ನಂತರ ಶೇ 70% ರಷ್ಟು ಉದ್ಯೋಗ ಅವಕಾಶಗಳನ್ನು ಕಲ್ಪಿಸಬೇಕಾಗಿದೆ. ಪ್ರಸ್ತುತ ವರ್ಷದಲ್ಲಿ ಈ ಎರಡು ಯೋಜನೆಗಳಡಿ ರೂ.75.96 ಕೋಟಿಗಳನ್ನು ಮೀಸಲಿಟ್ಟಿದೆ. **ಡೇ-ನಲ್ಮ್** ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ದೀನ್‌ದಯಾಳ್ ಅಂತ್ಯೋದಯ ಯೋಜನೆ-ರಾಷ್ಟ್ರೀಯ ನಗರ ಜೀವನೋಪಾಯ ಅಭಿಯಾನದ;

- ಕೌಶಲ್ಯ ತರಬೇತಿ ಮೂಲಕ ಉದ್ಯೋಗ ಮತ್ತು ಸ್ಥಳ ನಿಯುಕ್ತಿ ಉಪಘಟಕದಡಿ ಕೇಂದ್ರ ಸರ್ಕಾರವು ತಿಳಿಸಿರುವ 375 ತರಬೇತಿ ವಿಷಯಗಳನುಸಾರ ತರಬೇತಿಯನ್ನು ನೀಡಲಾಗುತ್ತಿದೆ.
- ತರಬೇತಿಯನ್ನು ಯಶಸ್ವಿಯಾಗಿ ಪಡೆದುಕೊಂಡ ಶೇ.70 ರಷ್ಟು ಅಭ್ಯರ್ಥಿಗಳಿಗೆ ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಸ್ವಯಂ ಉದ್ಯೋಗ ಅಥವಾ ವೇತನಾಧಾರಿತ ಉದ್ಯೋಗವನ್ನು ಕಲ್ಪಿಸಲಾಗುವುದು.
- ಅಭ್ಯರ್ಥಿಗಳು ಸ್ವಯಂ ಉದ್ಯೋಗ ಮತ್ತು ಗುಂಪು ಉದ್ಯೋಗವನ್ನು ಪ್ರಾರಂಭಿಸಲು ಇಚ್ಛಿಸಿದಲ್ಲಿ ಅಭಿಯಾನದಡಿಯ ಸ್ವಯಂ ಉದ್ಯೋಗ ಕಾರ್ಯಕ್ರಮ ಉಪಘಟಕದಡಿ ರೂ.2.00 ಲಕ್ಷದ ವರೆಗೆ ಹಾಗೂ ಗುಂಪು ಉದ್ಯೋಗವನ್ನು ಪ್ರಾರಂಭಿಸಲು ಇಚ್ಛಿಸಿದಲ್ಲಿ ರೂ.10.00 ಲಕ್ಷದ ವರೆಗೆ ಬ್ಯಾಂಕಿನಿಂದ ಸಾಲ ಸೌಲಭ್ಯವನ್ನು ಒದಗಿಸುತ್ತಾ, ಶೆ.7 ಕ್ಕಿಂತ ಮೇಲ್ಪಟ್ಟ ಬಡ್ಡಿ ಸಹಾಯಧನವನ್ನು ಯೋಜನೆಯಿಂದ ಭರಿಸಲಾಗುವುದು.
- 2020-21ನೇ ಸಾಲಿನಲ್ಲಿ ಡೇ-ನಲ್ಮ್ ಅಭಿಯಾನದ ಅನುಷ್ಠಾನಕ್ಕೆ ಕೇಂದ್ರ ಮತ್ತು ರಾಜ್ಯ ಸರ್ಕಾರದ ಪಾಲು ಸೇರಿ ರೂ.76.48 ಕೋಟಿಗಳಷ್ಟು ಅನುದಾನವನ್ನು ಹಂಚಿಕೆ ಮಾಡಲಾಗಿರುತ್ತದೆ.

ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ (NRLM): 2020-21ನೇ ಸಾಲಿನಲ್ಲಿ

- ➢ ದೀನ್ ದಯಾಳ್ ಉಪಾಧ್ಯಾಯ ಗ್ರಾಮೀಣ ಕೌಶಲ್ಯ ಯೋಜನೆಯಡಿ ವಿವಿಧ ಕೌಶಲ್ಯಗಳಲ್ಲಿ ತರಬೇತಿ ನೀಡಿ ಉದ್ಯೋಗಾವಕಾಶಗಳನ್ನು ದೊರಕಿಸಲು ರೂ.139.00 ಕೋಟಿಗಳನ್ನು ಮೀಸಲಿಡಲಾಗಿದೆ.
- ➢ ಗ್ರಾಮೀಣ ಸ್ವಉದ್ಯೋಗ ತರಬೇತಿ ಕೇಂದ್ರ – ಆರ್‌ಸೆಟಿ ಕಾರ್ಯಕ್ರಮದಡಿ ತರಬೇತಿ ನೀಡಿ ಸ್ವಉದ್ಯೋಗ ಒದಗಿಸಲು ರೂ.18.83 ಕೋಟಿಗಳನ್ನು ಮೀಸಲಿಡಲಾಗಿದೆ.

ಸಿಡಾಕ್

ಸಂಸ್ಥೆಯಿಂದ ಉದ್ಯಮಶೀಲತಾ ತಿಳುವಳಿಕೆ ಕಾರ್ಯಕ್ರಮ ಹಾಗೂ ಉದ್ಯಮಶೀಲತಾಭಿವೃದ್ಧಿ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ತರಬೇತಿಯಲ್ಲಿ ಭಾಗವಹಿಸಿದ ಅಭ್ಯರ್ಥಿಗಳಿಗೆ ಸ್ವಾವಲಂಬಿಯಾಗಲು ಪ್ರೇರೇಪಿಸಲಾಗುವುದು. ತರಬೇತಿ ಕಾರ್ಯಕ್ರಮಗಳಿಗೆ 2020-21ನೇ ಸಾಲಿನಲ್ಲಿ ರೂ. 7.00 ಕೋಟಿ ರೂಪಾಯಿ ಅನುದಾನ ಮೀಸಲಿಡಲಾಗಿದೆ.

ಸಂಖ್ಯೆ: ಕೌಉಜೀಇ 39 ಉಜೀಪ್ರ 2020

(ಡಾ॥ ಸಿ.ಎನ್. ಅಶ್ವಥ್‌ನಾರಾಯಣ)
ಉಪ ಮುಖ್ಯಮಂತ್ರಿಗಳು ಮತ್ತು ಉನ್ನತ ಶಿಕ್ಷಣ,
ಐಟಿ/ಬಿಟಿ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ
ಮತ್ತು ಜೀವನೋಪಾಯ ಸಚಿವರು.

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1269

ಸದಸ್ಯರ ಹೆಸರು : ಶ್ರೀ ರೇವಣ್ಣ ಹೆಚ್.ಡಿ (ಹೊಳೆನರಸೀಪುರ)

ಉತ್ತರಿಸುವ ದಿನಾಂಕ : 24.09.2020

ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ಹಾಸನ ಜಿಲ್ಲೆ ಹೊಳೆನರಸೀಪುರ ತಾಲ್ಲೂಕು ಹಳೇಕೋಟೆ ಹೋಬಳಿ ಹರದನಹಳ್ಳಿ ಗ್ರಾಮದಲ್ಲಿ ನೂತನವಾಗಿ 2019-20ನೇ ಶೈಕ್ಷಣಿಕ ಸಾಲಿನಿಂದ ಪ್ರಾರಂಭಗೊಂಡಿರುವ ಮಾದರಿ ವಸತಿಯುಕ್ತ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜಿನಲ್ಲಿ ವಿಶ್ವವಿದ್ಯಾಲಯದ ಸ್ಥಳೀಯ ಸಮಿತಿಯ ಷರತ್ತಿನನ್ವಯ ಐಚ್ಛಿಕ ವಿಷಯಗಳುಳ್ಳ ವಿಭಾಗಗಳನ್ನು ಮಂಜೂರು ಮಾಡಿ ಅಗತ್ಯವಿರುವ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳನ್ನು ನೇಮಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಸರ್ಕಾರದ ಆದೇಶ ಸಂಖ್ಯೆ: ಇಡಿ 80 ಹೆಚ್‌ಪಿಸಿ 2018 ದಿನಾಂಕ : 14-09-2018 ರ ಆದೇಶದಲ್ಲಿ ಹಾಸನ ಜಿಲ್ಲೆ ಹೊಳೆನರಸೀಪುರ ತಾಲ್ಲೂಕಿನ ಹರದನಹಳ್ಳಿಯಲ್ಲಿ ಮಾದರಿ ವಸತಿಯುಕ್ತ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿಗೆ ಕೆಳಕಂಡಂತೆ ಕೋರ್ಸುಗಳನ್ನು ಮಂಜೂರು ಮಾಡಿದೆ. ಬಿ.ಎಸ್ಸಿ- ಭೌತಶಾಸ್ತ್ರ, ಗಣಿತಶಾಸ್ತ್ರ, ಕಂಪ್ಯೂಟರ್‌ಸೈನ್ಸ್.(ಪಿಎಂಸಿಎಸ್) ಬಿ.ಕಾಂ- ವಿಶ್ವವಿದ್ಯಾಲಯ ನಿಗಧಿ ಪಡಿಸಿರುವ ವಾಣಿಜ್ಯ ವಿಷಯಗಳು. ಬಿ.ಸಿ.ಎ- ವಿಶ್ವವಿದ್ಯಾಲಯ ನಿಗದಿ ಪಡಿಸಿರುವ ವಿಷಯಗಳು. ಮೈಸೂರು ವಿಶ್ವವಿದ್ಯಾಲಯದ ಆದೇಶ ಸಂಖ್ಯೆ: ಸಿಡಿಸಿ-03/167/2019-20, ದಿನಾಂಕ : 03-08-2019 ರಲ್ಲಿ 2019-20 ನೇ ಸಾಲಿನಿಂದ ಅನ್ವಯವಾಗುವಂತೆ ಕೆಳಕಂಡ ವಿಷಯಗಳಿಗೆ ತಾತ್ಕಾಲಿಕ ಮಂಜೂರಾತಿ ನೀಡಲಾಗಿದೆ. ಬಿ.ಎ – ಇತಿಹಾಸ, ಅರ್ಥಶಾಸ್ತ್ರ, ಸಮಾಜಶಾಸ್ತ್ರ, ಭೂಗೋಳಶಾಸ್ತ್ರ, ರಾಜ್ಯಶಾಸ್ತ್ರ, ಕನ್ನಡ, ಪತ್ರಿಕೋದ್ಯಮ ಬಿ.ಎಸ್ಸಿ- ಭೌತಶಾಸ್ತ್ರ, ರಸಾಯನಶಾಸ್ತ್ರ, ಗಣಿತಶಾಸ್ತ್ರ. ದಿನಾಂಕ: 26-02-2020 ರ ಆದೇಶದಲ್ಲಿ ಒಟ್ಟು 08 ಹುದ್ದೆಗಳನ್ನು ಹಂಚಿಕೆ ಮಾಡಲಾಗಿದೆ. ಕನ್ನಡ – 01 ಇಂಗ್ಲೀಷ್ – 01 ಭೌತಶಾಸ್ತ್ರ – 01 ರಸಾಯನಶಾಸ್ತ್ರ – 01 ಗಣಕವಿಜ್ಞಾನ – 01 ವಾಣಿಜ್ಯಶಾಸ್ತ್ರ – 03 ಒಟ್ಟು – 08 ಹುದ್ದೆಗಳು ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ವಾಣಿಜ್ಯಶಾಸ್ತ್ರ-01, ಅರ್ಥಶಾಸ್ತ್ರ-01, ಕನ್ನಡ-01 ಉಪನ್ಯಾಸಕರು ನಿಯೋಜನೆ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಬೋಧಕೇತರ ಸಿಬ್ಬಂದಿಗಳಲ್ಲಿ ಅಧೀಕ್ಷಕರೊಬ್ಬರು ಮರುಹಂಚಿಕೆ ಮೇರೆಗೆ ಕರ್ತವ್ಯ ನಿರ್ವಹಿಸುತ್ತಿದ್ದಾರೆ.

<table>
<tr>
<td>ಆ)</td>
<td>ಹಾಗಿದ್ದಲ್ಲಿ 2020-21ನೇ ಶೈಕ್ಷಣಿಕ ವರ್ಷದಿಂದ ಪದವಿ ಶಿಕ್ಷಣಕ್ಕೆ ಮೈಸೂರು ವಿಶ್ವವಿದ್ಯಾನಿಲಯ ಮಂಜೂರು ಮಾಡಿರುವ ಐಚ್ಛಿಕ ವಿಷಯಗಳುಳ್ಳ ಎಲ್ಲಾ ಕಾಂಬಿನೇಷನ್ ಗಳನ್ನು ಪ್ರಾರಂಭಿಸಲು ಅಗತ್ಯವಿರುವ 15 ಬೋಧಕ ಹುದ್ದೆಗಳು, 10 ಬೋಧಕೇತರ ಹುದ್ದೆಗಳು ಮತ್ತು ವಸತಿ ನಿಲಯವನ್ನು ನಡೆಸಲು 10 ಹುದ್ದೆಗಳನ್ನು ಸೃಜಿಸಬೇಕಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td>
<td>ಕಾಲೇಜಿಗೆ ಅಗತ್ಯವಿರುವ 15 ಬೋಧಕ ಹುದ್ದೆಗಳು ಹಾಗೂ 20 ಬೋಧಕೇತರ ಹುದ್ದೆಗಳನ್ನು ಹೊಸದಾಗಿ ಈ ಕೆಳಕಂಡಂತೆ ಸೃಜಿಸಲು ಪ್ರಸ್ತಾವನೆ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆ.
ಬೋಧಕ ಹುದ್ದೆ
<table>
<tr><td>ಪ್ರಾಂಶುಪಾಲರು</td><td>01</td></tr>
<tr><td>ಭಾಷೆಗಳು ಕನ್ನಡ, ಇಂಗ್ಲೀಷ್</td><td>02</td></tr>
<tr><td>ವಾಣಿಜ್ಯ ವಿಭಾಗ</td><td>04</td></tr>
<tr><td>ವಿಜ್ಞಾನ ವಿಭಾಗ</td><td>03</td></tr>
<tr><td>ಬಿಸಿಎ</td><td>03</td></tr>
<tr><td>ದೈಹಿಕ ಶಿಕ್ಷಣ ಬೋಧಕರು</td><td>01</td></tr>
<tr><td>ಗ್ರಂಥಪಾಲಕರು</td><td>01</td></tr>
<tr><td>ಒಟ್ಟು</td><td>15 ಹುದ್ದೆಗಳು</td></tr>
</table>
ಬೋಧಕೇತರ ಹುದ್ದೆ
<table>
<tr><td>ಮ್ಯಾನೇಜರ್</td><td>01</td></tr>
<tr><td>ಅಧೀಕ್ಷಕರು</td><td>01</td></tr>
<tr><td>ಪ್ರಥಮ ದರ್ಜೆ ಸಹಾಯಕರು</td><td>01</td></tr>
<tr><td>ದ್ವಿತೀಯ ದರ್ಜೆ ಸಹಾಯಕರು</td><td>01</td></tr>
<tr><td>ಡೇಟಾ ಎಂಟ್ರಿ ಆಪರೇಟರ್‌ಗಳು</td><td>01</td></tr>
<tr><td>ಅಟೆಂಡರ್‌ಗಳು</td><td>02</td></tr>
<tr><td>ಪರಿಚಾರಕರು</td><td>03</td></tr>
<tr><td>ಒಟ್ಟು</td><td>10 ಹುದ್ದೆಗಳು</td></tr>
</table>
ಸಿಬ್ಬಂದಿ ವರ್ಗ ಮಹಿಳಾ ವಿದ್ಯಾರ್ಥಿನಿಲಯಕ್ಕೆ
<table>
<tr><td>ನಿಲಯಪಾಲಕರು</td><td>01</td></tr>
<tr><td>ಪ್ರಥಮ ದರ್ಜೆ ಸಹಾಯಕರು</td><td>01</td></tr>
<tr><td>ದ್ವಿತೀಯ ದರ್ಜೆ ಸಹಾಯಕರು</td><td>01</td></tr>
<tr><td>ಅಟೆಂಡರ್</td><td>01</td></tr>
<tr><td>ಅಡಿಗೆಯವರು</td><td>02</td></tr>
<tr><td>ಪರಿಚಾರಕರು/ಸ್ಕ್ಯಾವೆಂಜರ್‌ಗಳು</td><td>03</td></tr>
<tr><td>ರಾತ್ರಿ ಕಾವಲುಗಾರರು</td><td>01</td></tr>
<tr><td>ಒಟ್ಟು</td><td>10 ಹುದ್ದೆಗಳು</td></tr>
</table>
</td>
</tr>
<tr>
<td>ಇ)</td>
<td>ಸದರಿ ಕಾಲೇಜಿಗೆ ಅಗತ್ಯವಿರುವ ಬೋಧಕ ಮತ್ತು ಬೋಧಕೇತರ ಹುದ್ದೆಗಳ ಸೃಜನೆಯಾಗದಿರುವುದರಿಂದ ವಿದ್ಯಾರ್ಥಿಗಳ ವ್ಯಾಸಂಗಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td>
<td>ಬಂದಿದೆ
ಆದಾಗ್ಯೂ ವಿವಿಧ ವಿಷಯಗಳಲ್ಲಿ ಲಭ್ಯವಾಗುವ ಕಾರ್ಯಭಾರಕ್ಕೆ ಅನುಗುಣವಾಗಿ ಅತಿಥಿ ಉಪನ್ಯಾಸಕರ ಸೇವೆಯನ್ನು ಬಳಸಿಕೊಳ್ಳಲಾಗುತ್ತದೆ. ಈ ಮೂಲಕ ವಿದ್ಯಾರ್ಥಿಗಳ ವ್ಯಾಸಂಗಕ್ಕೆ ತೊಂದರೆಯಾಗದಂತೆ ಕ್ರಮವಹಿಸಲಾಗುತ್ತಿದೆ.</td>
</tr>
</table>

ಕಡತ ಸಂಖ್ಯೆ: ಇಡಿ 156 ಹೆಚ್‌ಪಿಸಿ 2020

(ಡಾ: ಅಶ್ವಥ್ ನಾರಾಯಣ ಸಿ.ಎನ್)

ಉಪ ಮುಖ್ಯಮಂತ್ರಿಗಳು ಹಾಗೂ

ಉನ್ನತ ಶಿಕ್ಷಣ ಸಚಿವರು

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1270
ಮಾನ್ಯ ಸದಸ್ಯರ ಹೆಸರು	ಶ್ರೀ ರೇವಣ್ಣ ಹೆಚ್.ಡಿ.(ಹೊಳೇನರಸೀಪುರ)
ಉತ್ತರಿಸಬೇಕಾದ ದಿನಾಂಕ	24.09.2020
ಉತ್ತರಿಸುವ ಸಚಿವರು	ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಹಾಸನ ಜಿಲ್ಲೆ ಹೊಳೆನರಸೀಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಹೊಳೆನರಸೀಪುರ ಟೌನ್ ಚೆನ್ನಾಂಬಿಕ ಚಿತ್ರಮಂದಿರದ ಹಿಂಭಾಗ ಮೆಟ್ರಿಕ್ ನಂತರದ ಬಾಲಕಿಯರ ವಸತಿ ನಿಲಯ(ಸಾಮಾನ್ಯ)(ಬಿ.ಸಿ.ಡ.ಬ್ಲ್ಯೂ.ಡಿ-2038) ಮತ್ತು ಮೆಟ್ರಿಕ್ ಪೂರ್ವ ಬಾಲಕಿಯರ ವಸತಿ ನಿಲಯ(ಬಿ.ಸಿ.ಡ.ಬ್ಲ್ಯೂ.ಡಿ-632), ಹೊಳೆನರಸೀಪುರ ಟೌನ್(ಈಜುಕೊಳದ ಹತ್ತಿರ) ಮೆಟ್ರಿಕ್ ನಂತರದ ಬಾಲಕಿಯರ 'ಏ' ವಸತಿ ನಿಲಯ(ವೃತ್ತಿಪರ) (ಬಿ.ಸಿ.ಡ.ಬ್ಲ್ಯೂ.ಡಿ-2040), ಪಡವಲಹಿಪ್ಪೆ ಗ್ರಾಮದಲ್ಲಿ ಮೆಟ್ರಿಕ್ ನಂತರದ ಬಾಲಕರ ವಸತಿನಿಲಯ(ಬಿ.ಸಿ.ಡ.ಬ್ಲ್ಯೂ.ಡಿ-2035) ಈ ವಸತಿನಿಲಯಗಳ ಕಟ್ಟಡಗಳನ್ನು ಹಲವಾರು ವರ್ಷಗಳಿಂದ ದುರಸ್ಥಿಗೊಳಿಸದೆ ಇರುವುದರಿಂದ ಶಿಥಿಲಗೊಂಡಿದ್ದು, ವಸತಿ ಹೊಂದಿರುವ ಬಡ ಕುಟುಂಬದ ವಿದ್ಯಾರ್ಥಿಗಳಿಗೆ ತುಂಬಾ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
ಆ)	ಸದರಿ ವಸತಿ ನಿಲಯಗಳ ಕಟ್ಟಡಗಳನ್ನು ತೆರವುಗೊಳಿಸಿ ಹೊಸದಾಗಿ ಕಟ್ಟಡಗಳನ್ನು ನಿರ್ಮಿಸಲು ಕಾಮಗಾರಿಗಳ ಅಂದಾಜು ಪಟ್ಟಿಗಳನ್ನು ಲೋಕೋಪಯೋಗಿ ಇಲಾಖೆ ವತಿಯಿಂದ ತಯಾರಿಸಿ ಹಾಸನದ ಜಿಲ್ಲಾಧಿಕಾರಿಗಳ ಮುಖೇನ ಮಾನ್ಯ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ಅವರಿಗೆ ದಿನಾಂಕ:22.07.2019ರಲ್ಲಿ ಕಳುಹಿಸಿರುವುದು ನಿಜವೇ(ಸಂಪೂರ್ಣ ಮಾಹಿತಿ ನೀಡುವುದು);	ಹೌದು, (1) ಮೆಟ್ರಿಕ್ ನಂತರ ಬಾಲಕರ ವಿದ್ಯಾರ್ಥಿ ನಿಲಯ, ಹೊಳೆನರಸೀಪುರ ಟೌನ್ - ಬಿ.ಸಿ.ಡ್ಲ್ಯೂ.ಡಿ-2035 ಮತ್ತು (2) ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿ ನಿಲಯ, (ವೃತ್ತಿಪರ), ಹೊಳೆನರಸೀಪುರ ಟೌನ್ - ಬಿ.ಸಿ.ಡ್ಲ್ಯೂ.ಡಿ-2040 ಈ ವಿದ್ಯಾರ್ಥಿ ನಿಲಯಗಳ ಕಟ್ಟಡ ನಿರ್ಮಾಣಕ್ಕಾಗಿ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಹಾಸನ ಇವರು ಸಿದ್ಧಪಡಿಸಿರುವ ಅಂದಾಜು ಪಟ್ಟಿಗಳೊಂದಿಗೆ ಜಿಲ್ಲಾಧಿಕಾರಿಗಳು, ಹಾಸನ ಜಿಲ್ಲೆ ಇವರ ಸಂಖ್ಯೆ: ಹಿಂವಕಇ/ಸಿಬ್ಬಂದಿ-7/ ಸಿಆರ್-37/2018-19 ದಿನಾಂಕ: 01-07-2019ರಲ್ಲಿ ಹಾಗೂ

		(1) ಮೆಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿ ನಿಲಯ, ಹೊಳೆನರಸೀಪುರ ಟೌನ್ - ಬಿ.ಸಿ.ಡ್ಲ್ಯೂ.ಡಿ-2038 ಮತ್ತು (2) ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿ ನಿಲಯ, ಹೊಳೆನರಸೀಪುರ ಟೌನ್ - ಬಿ.ಸಿ.ಡ್ಲ್ಯೂ.ಡಿ-632 ಈ ವಿದ್ಯಾರ್ಥಿ ನಿಲಯಗಳ ಕಟ್ಟಡ ನಿರ್ಮಾಣಕ್ಕಾಗಿ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಹಾಸನ ಇವರು ಸಿದ್ಧಪಡಿಸಿರುವ ಅಂದಾಜು ಪಟ್ಟಿಗಳೊಂದಿಗೆ ಜಿಲ್ಲಾಧಿಕಾರಿಗಳು, ಹಾಸನ ಜಿಲ್ಲೆ ಇವರ ಪತ್ರ ಸಂಖ್ಯೆ: ಹಿಂವಕಇ/ಸಿಬ್ಬಂದಿ-7/ ಸಿಆರ್-56/2019-20 ದಿನಾಂಕ: 07-11-2019ರಲ್ಲಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.
ಇ)	ಪ್ರಸ್ತಾವನೆಯು ಸರ್ಕಾರಕ್ಕೆ ಬಂದು ಒಂದು ವರ್ಷ ಕಳೆದರೂ ಸಹ ವಸತಿನಿಲಯಗಳಿಗೆ ಅನುದಾನ ಮಂಜೂರು ಮಾಡಲು ಸರ್ಕಾರಕ್ಕೆ ಇರುವ ಅಡಚಣೆಗಳೇನು; ಯಾವ ಕಾಲಮಿತಿಯೊಳಗೆ ಸದರಿ ವಸತಿನಿಲಯಗಳ ಹೊಸ ಕಟ್ಟಡವನ್ನು ನಿರ್ಮಾಣ ಕಾಮಗಾರಿ ಸರ್ಕಾರ ಕೈಗೆತ್ತಿಕೊಳ್ಳುವುದು(ಸಂಪೂರ್ಣ ಮಾಹಿತಿ ನೀಡುವುದು)	ಹಾಸನ ಜಿಲ್ಲೆಗೆ ಈಗಾಗಲೇ 16 ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣಕ್ಕೆ ಮಂಜೂರಾತಿ ನೀಡಿದ್ದು, ಇವುಗಳ ನಿರ್ಮಾಣ ಕಾರ್ಯವು ಪ್ರಗತಿಯಲ್ಲಿರುತ್ತವೆ. ಪ್ರಸ್ತಾಪಿತ ಹೊಳೆನರಸೀಪುರ ವಿಧಾನಸಭಾ ಕ್ಷೇತ್ರದ ನಾಲ್ಕು ಮೆಟ್ರಿಕ್ ಪೂರ್ವ/ನಂತರ ಬಾಲಕರ/ಬಾಲಕಿಯರ ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣವನ್ನು ಪ್ರತಿ ವರ್ಷ ಆಯವ್ಯಯದಲ್ಲಿ ಒದಗಿಸಲಾಗುವ ಅನುದಾನದ ಲಭ್ಯತೆಯನುಸಾರ ಆಧ್ಯತೆ ಮೇರೆಗೆ ಪರಿಶೀಲಿಸಲಾಗುವುದು.

ಸಂಖ್ಯೆ:ಹಿಂವಕ 532 ಬಿಎಂಎಸ್ 2020

(ಬಿ.ಶ್ರೀರಾಮುಲು)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ		1262
ಸದಸ್ಯರ ಹೆಸರು		ಶ್ರೀ ದೇಶಪಾಂಡೆ ಆರ್.ವಿ. (ಹಳಿಯಾಳ),
ಉತ್ತರಿಸಬೇಕಾದ ದಿನಾಂಕ		24.09.2020
ಉತ್ತರಿಸಬೇಕಾದ ಸಚಿವರು		ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ)
ಪ್ರಶ್ನೆ		ಉತ್ತರ
(ಅ)	ಉತ್ತರ ಕನ್ನಡ ಜಿಲ್ಲೆಯ ಹಳಿಯಾಳ, ದಾಂಡೇಲಿ ಹಾಗೂ ಜೋಯಿಡಾ ತಾಲ್ಲೂಕುಗಳಲ್ಲಿ ಇರುವ ಪ್ರಥಮ ದರ್ಜೆ ಮಹಾವಿದ್ಯಾಲಯಗಳಲ್ಲಿ ಹಾಗೂ ಜೋಯಿಡಾ ಪಾಲಿಟೆಕ್ನಿಕ್‌ನಲ್ಲಿ ಸೇವೆ ಸಲ್ಲಿಸುತ್ತಿರುವ ಪ್ರಾಧ್ಯಾಪಕರು ಹಾಗೂ ಸಿಬ್ಬಂದಿವರ್ಗದವರನ್ನು ಕಳೆದ ಎರಡು ವರ್ಷಗಳಿಂದ ಬೇರೆ ಕಡೆಗೆ ನಿಯೋಜನೆ ಹಾಗೂ ವರ್ಗಾವಣೆಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?	ಉತ್ತರ ಕನ್ನಡ ಜಿಲ್ಲೆಯ ಹಳಿಯಾಳ, ದಾಂಡೇಲಿ ಹಾಗೂ ಜೋಯಿಡಾ ತಾಲ್ಲೂಕುಗಳಲ್ಲಿ ಇರುವ ಪ್ರಥಮ ದರ್ಜೆ ಮಹಾವಿದ್ಯಾಲಯಗಳಲ್ಲಿ ಸೇವೆ ಸಲ್ಲಿಸುತ್ತಿರುವ ಪ್ರಾಧ್ಯಾಪಕರು ಹಾಗೂ ಸಿಬ್ಬಂದಿವರ್ಗದವರನ್ನು ಕಳೆದ ಎರಡು ವರ್ಷಗಳಿಂದ ಬೇರೆ ಕಡೆಗೆ ನಿಯೋಜಿಸಿರುವುದು ಕಾಲೇಜು ಶಿಕ್ಷಣ ಇಲಾಖೆ ಗಮನಕ್ಕೆ ಬಂದಿರುತ್ತದೆ. ಉತ್ತರ ಕನ್ನಡ ಜಿಲ್ಲೆಯಲ್ಲಿರುವ ಸರ್ಕಾರಿ ಪಾಲಿಟೆಕ್ನಿಕ್, ಜೋಯಿಡಾ ಈ ಸಂಸ್ಥೆಯಿಂದ ಕಳೆದ 02 ವರ್ಷಗಳಿಂದ 04 ಉಪನ್ಯಾಸಕರುಗಳನ್ನು ಅವರ ವೈಯಕ್ತಿಕ ಹಾಗೂ ಕೌಟುಂಬಿಕ ಕಾರಣಗಳ ಹಿನ್ನಲೆಯಲ್ಲಿ ಉಪನ್ಯಾಸಕರುಗಳ ಅರ್ಜಿಗಳೊಂದಿಗೆ ಮಾನ್ಯ ಶಾಸಕರುಗಳು ನೀಡಿರುವ ಶಿಫಾರಸ್ಸಿನಂತೆ ಸದರಿ ಉಪನ್ಯಾಸಕರುಗಳನ್ನು ಬೇರೆ ಸಂಸ್ಥೆಗಳಿಗೆ ನಿಯೋಜನೆ ಮಾಡಲಾಗಿದ್ದು, ಈಗ ಎಲ್ಲಾ 04 ಉಪನ್ಯಾಸಕರುಗಳ ನಿಯೋಜನೆಯನ್ನು ರದ್ದುಗೊಳಿಸಲಾಗಿರುತ್ತದೆ.
(ಆ)	ಬಂದಿದ್ದಲ್ಲಿ ಎಷ್ಟು ಮಂದಿ ಸಿಬ್ಬಂದಿಗಳು ಹಾಗೂ ಪ್ರಾಧ್ಯಾಪಕರುಗಳನ್ನು ನಿಯೋಜಿಸಲಾಗಿದೆ ಹಾಗೂ ನಿಯೋಜನೆಯನ್ನು ರದ್ದುಗೊಳಿಸಲಾಗಿತ್ತು	ಉತ್ತರಕನ್ನಡ ಜಿಲ್ಲೆಯ ಹಳಿಯಾಳ, ದಾಂಡೇಲಿ ಹಾಗೂ ಜೋಯಿಡಾ ತಾಲ್ಲೂಕುಗಳಲ್ಲಿರುವ ಸರ್ಕಾರಿ ಪ್ರಥಮದರ್ಜೆ ಕಾಲೇಜುಗಳಿಂದ ಬೇರೆ ಕಡೆಗೆ ನಿಯೋಜಿತರಾಗಿರುವ ಪ್ರಾಧ್ಯಾಪಕರು & ಸಿಬ್ಬಂದಿವರ್ಗದವರ ವಿವರಗಳು ಕೆಳಕಂಡಂತಿದೆ.

ಕ್ರ. ಸಂ	ಕಾಲೇಜು	ಬೋಧಕರು	ಬೋಧಕೇತರರು
1	ಸಪ್ರದಕಾ ಹಳಿಯಾಳ	03	00
2	ಸಪ್ರದಕಾ ಜೋಯಿಡಾ	02	00
3	ಸಪ್ರದಕಾ ದಾಂಡೇಲಿ	00	00

ಮೇಲ್ಕಂಡಂತೆ ನಿಯೋಜಿತರಾಗಿದ್ದ ಪ್ರಾಧ್ಯಾಪಕರ ನಿಯೋಜನೆಯನ್ನು ಈ ಕಛೇರಿ ಆದೇಶ ಸಂ:DCE:TRN:DEP:62:TDG-2020 ದಿ:18.06.2020ರಂತೆ ರದ್ದುಗೊಳಿಸಲಾಗಿತ್ತು.

ಇ)	ನಿಯೋಜನೆಯನ್ನು ರದ್ದುಗೊಳಿಸಲಾದ ಸಿಬ್ಬಂದಿಗಳು ಹಾಗೂ ಪ್ರಾಧ್ಯಾಪಕರುಗಳು ಪುನಃ ಕರ್ತವ್ಯಕ್ಕೆ ಹಾಜರಾಗಿದ್ದಾರೆಯೇ? (ಮಾಹಿತಿ ನೀಡುವುದು)	ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಜೋಯಿಡಾ ಇಲ್ಲಿಂದ ನಿಯೋಜನೆ ರದ್ದಗೊಂಡ 02 ಪ್ರಾಧ್ಯಾಪಕರಲ್ಲಿ 01 ಪ್ರಾಧ್ಯಾಪಕರು ಮಾತೃ ಕಾಲೇಜಿನಲ್ಲಿ ವರದಿ ಮಾಡಿಕೊಂಡಿರುತ್ತಾರೆ. ಉಳಿದ 01 ಪ್ರಾಧ್ಯಾಪಕರ ನಿಯೋಜನೆಯನ್ನು ಮುಂದುವರೆಸಲಾಗಿರುತ್ತದೆ. ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಹಳಿಯಾಳ ಇಲ್ಲಿಂದ ನಿಯೋಜನೆ ರದ್ದುಗೊಂಡ 03 ಪ್ರಾಧ್ಯಾಪಕರ ನಿಯೋಜನೆಯನ್ನು ಮುಂದುವರೆಸಲಾಗಿದ್ದು, ಕಾಲೇಜಿನ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಪರ್ಯಾಯವಾಗಿ ಬೇರೆ ಕಾಲೇಜಿನಿಂದ 02 ಪ್ರಾಧ್ಯಾಪಕರನ್ನು ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಹಳಿಯಾಳ ಇಲ್ಲಿಗೆ ನಿಯೋಜಿಸಲಾಗಿದ್ದು, ಸದರಿಯವರುಗಳು ಕರ್ತವ್ಯಕ್ಕೆ ವರದಿ ಮಾಡಿಕೊಂಡಿರುತ್ತಾರೆ. ಪಾಲಿಟೆಕ್ನಿಕ್‌ನಲ್ಲಿ ನಿಯೋಜನೆಯನ್ನು ರದ್ದುಗೊಳಿಸಿರುವ ಉಪನ್ಯಾಸಕರುಗಳಲ್ಲಿ 02 ಉಪನ್ಯಾಸಕರುಗಳು ನಿಯೋಜನೆಗೊಂಡ ಸಂಸ್ಥೆಯಿಂದ ಬಿಡುಗಡೆಗೊಂಡು ಮಾತೃ ಸಂಸ್ಥೆಯಲ್ಲಿ ಕರ್ತವ್ಯಕ್ಕೆ ಹಾಜರಾಗಿರುತ್ತಾರೆ. ಒಬ್ಬರು ಉಪನ್ಯಾಸಕರನ್ನು ದಿನಾಂಕ: 19.09.2020 ರಂದು ನಿಯೋಜನೆಗೊಂಡ ಸಂಸ್ಥೆಯಾದ ಸರ್ಕಾರಿ ಪಾಲಿಟೆಕ್ನಿಕ್, ಬೇಲೂರು ಈ ಸಂಸ್ಥೆಯಿಂದ ಬಿಡುಗಡೆಗೊಳಿಸಲಾಗಿದ್ದು, ಮಾತೃ ಸಂಸ್ಥೆಯಾದ ಸರ್ಕಾರಿ ಪಾಲಿಟೆಕ್ನಿಕ್, ಜೋಯಿಡಾ ಇಲ್ಲಿ ಕಾರ್ಯವರದಿ ಮಾಡಿಕೊಳ್ಳುವಂತೆ ಸೂಚಿಸಲಾಗಿದೆ. ಮಾತ್ತೋರ್ವ ಉಪನ್ಯಾಸಕರನ್ನು ಈ ಹಿಂದೆ ನಿಯೋಜನೆಗೊಂಡ ಸರ್ಕಾರಿ ಪಾಲಿಟೆಕ್ನಿಕ್ ಬಂಟ್ವಾಳ ಸಂಸ್ಥೆಯಲ್ಲಿಯೇ ಮುಂದುವರೆಸಲಾಗಿದೆ.

ಇಡಿ 170 ಡಿಸಿಇ 2020

(ಡಾ. ಅಶ್ವಥ್ ನಾರಾಯಣ ಸಿ.ಎನ್.)
ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ)

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ		1265
ಸದಸ್ಯರ ಹೆಸರು		ಶ್ರೀ ರಾಮಸ್ವಾಮಿ ಎ.ಟಿ. (ಅರಕಲಗೂಡು)
ಉತ್ತರಿಸಬೇಕಾದ ದಿನಾಂಕ		24.09.2020
ಉತ್ತರಿಸಬೇಕಾದ ಸಚಿವರು		ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ)
ಪ್ರಶ್ನೆ		ಉತ್ತರ
(ಅ)	2019-20ನೇ ಸಾಲಿನಲ್ಲಿ ಅರಕಲಗೂಡು ಕ್ಷೇತ್ರದ ಹಳ್ಳಿಮೈಸೂರುನಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ದಾಖಲಾದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು;	2019-20ನೇ ಸಾಲಿನಲ್ಲಿ ಅರಕಲಗೂಡು ಕ್ಷೇತ್ರದ ಹಳ್ಳಿಮೈಸೂರುನಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿದ್ದ ವಿದ್ಯಾರ್ಥಿಗಳ ಸಂಖ್ಯೆ ಈ ಕೆಳಕಂಡಂತಿದೆ.

ಕ್ರಮ ಸಂಖ್ಯೆ	ಕೋರ್ಸು/ಕಾಂಬಿನೇಷನ್	1ನೇ ವರ್ಷ	2ನೇ ವರ್ಷ	ಅಂತಿಮ ವರ್ಷ	ಒಟ್ಟು
1	ಬಿ.ಎ. – ಹೆಚ್.ಇ.ಪಿ.	24	11	12	47
2	ಬಿ.ಎ. – ಹೆಚ್.ಇ.ಕೆ.	16	11	0	27
	ಒಟ್ಟು	40	22	12	74

(ಆ)	ಸದರಿ ಕಾಲೇಜಿನಲ್ಲಿ 2019-20ನೇ ಸಾಲಿನ ಅಂತಿಮ ವರ್ಷದ ಶೇಕಡವಾರು ಫಲಿತಾಂಶವೆಷ್ಟು;	ಕೋವಿಡ್-19 ಸಾಂಕ್ರಾಮಿಕ ರೋಗದಿಂದ ಲಾಕ್‌ಡೌನ್ ಘೋಷಿಸಲಾದ ಕಾರಣ 2019-20ನೇ ಸಾಲಿನ ಪರೀಕ್ಷೆಗಳು ವಿಳಂಬವಾಗಿ ಪ್ರಾರಂಭವಾಗಿದ್ದು ಮೌಲ್ಯಮಾಪನ ಕಾರ್ಯ ಪೂರ್ಣಗೊಂಡಿರದ ಕಾರಣ ಇದುವರೆಗೆ ಫಲಿತಾಂಶ ಪ್ರಕಟವಾಗಿರುವುದಿಲ್ಲ.
(ಇ)	ಆ ಪ್ರದೇಶದಲ್ಲಿರುವ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು;	ಹಳ್ಳಿ ಮೈಸೂರು ಪ್ರದೇಶದಲ್ಲಿ ಒಂದು ಪದವಿ ಪೂರ್ವ ಕಾಲೇಜು ಕಾರ್ಯ ನಿರ್ವಹಿಸುತ್ತಿದೆ. [ಹಳ್ಳಿಮೈಸೂರಿನ 8 ಕಿ.ಮೀ. ಪ್ರದೇಶ ವ್ಯಾಪ್ತಿಯಲ್ಲಿ ಈ ಒಂದು ಕಾಲೇಜನ್ನು ಹೊರತುಪಡಿಸಿ ಯಾವುದೇ ಪದವಿ ಪೂರ್ವ ಕಾಲೇಜುಗಳು ಕಾರ್ಯ ನಿರ್ವಹಿಸುತ್ತಿರುವುದಿಲ್ಲ]
(ಈ)	ಗ್ರಾಮಾಂತರ ಪ್ರದೇಶದ ಸರ್ಕಾರಿ ಪ್ರಥಮ ದರ್ಜೆ ಕಾಲೇಜನ್ನು ಸ್ಥಳಾಂತರಿಸಲು ಕಾರಣಗಳೇನು?	ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಹಳ್ಳಿಮೈಸೂರು ಈ ಕಾಲೇಜಿನಲ್ಲಿ ಕಳೆದ 3 ಶೈಕ್ಷಣಿಕ ಸಾಲುಗಳಲ್ಲಿ 100ಕ್ಕಿಂತ ಕಡಿಮೆ ವಿದ್ಯಾರ್ಥಿಗಳು ಪ್ರವೇಶಾತಿ ಹೊಂದಿರುತ್ತಾರೆ. ಬಹುತೇಕ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪೂರಕ ಪದವಿ ಪೂರ್ವ ಕಾಲೇಜುಗಳ ಕೊರತೆಯಿರುವುದರಿಂದ ವಿದ್ಯಾರ್ಥಿಗಳ ಪ್ರವೇಶಾತಿ ಕಡಿಮೆಯಾಗುತ್ತಿದ್ದು, ಆ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುವ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ಸೇವೆಯನ್ನು ಸಮರ್ಪಕವಾಗಿ ಬಳಸಿಕೊಳ್ಳಲು ಇಲಾಖೆಗೆ ಸಾಧ್ಯವಾಗದಾಗಿದೆ. ಹಾಲಿ ಚಾಲ್ತಿಯಲ್ಲಿರುವ ಮೂಲಭೂತ ಸೌಲಭ್ಯಗಳನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಲು ಇಲಾಖೆಯು ಕ್ರಮವಹಿಸುವುದು ತುಂಬಾ ಅಗತ್ಯವಾಗಿದೆ. ಆದ್ದರಿಂದ ಮೇಲೆ ತಿಳಿಸಿರುವ ಕಡಿಮೆ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿರುವ ಕಾಲೇಜುಗಳನ್ನು ಸ್ಥಳಾಂತರಿಸುವುದು ಸೂಕ್ತವೆಂದು ನಿರ್ಣಯಿಸಿ. 13 ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಯಾವುದೇ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿರುವ ಹಿನ್ನೆಲೆಯಲ್ಲಿ ಅಂತಹ ವಿಧಾನ ಸಭಾ ಕ್ಷೇತ್ರದ

		ಮಾನ್ಯ ಶಾಸಕರ ಕೋರಿಕೆಯಂತೆ ಹಾಗೂ ಆ ಭಾಗದಲ್ಲಿ ಹೆಚ್ಚಿನ ಪದವಿ ಆಕಾಂಕ್ಷಿತ ವಿದ್ಯಾರ್ಥಿಗಳ ಶೈಕ್ಷಣಿಕ/ಉದ್ಯೋಗ ಕಲ್ಪಿಸುವ ನಿಟ್ಟಿನಲ್ಲಿ ಸದರಿ ಕಾಲೇಜುಗಳನ್ನು ಸ್ಥಳಾಂತರಗೊಳಿಸಲಾಗಿದೆ. ಈ ಹಿನ್ನೆಲೆಯಲ್ಲಿ ಮೇಲೆ ತಿಳಿಸಿರುವ ಪ್ರವೇಶಾತಿ ಕಡಿಮೆ ಇರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳನ್ನು ಅವಶ್ಯಕತೆಗನುಸಾರವಾಗಿ ಬೇರೆಡೆಗೆ ಸ್ಥಳಾಂತರಿಸಿದಲ್ಲಿ ಹೆಚ್ಚಿನ ವಿದ್ಯಾರ್ಥಿಗಳನ್ನು ಆಕರ್ಷಿಸುವುದಲ್ಲದೇ ಲಭ್ಯವಿರುವ ಮೂಲ ಭೂತ ಸೌಲಭ್ಯಗಳನ್ನು ಬಳಸಿಕೊಳ್ಳಲು ಇಲಾಖೆಗೆ ಸಹಾಯವಾಗುವುದು ಜೊತೆಗೆ ಸದರಿ ಕಾಲೇಜುಗಳ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳನ್ನು ಇತರೆ ಕಾಲೇಜುಗಳಿಗೆ ಸಮರ್ಪಕವಾಗಿ ಬಳಸಿಕೊಳ್ಳಬಹುದಾಗಿದೆ. ಆದ್ದರಿಂದ, ಸರ್ಕಾರದ ಆದೇಶ ಸಂಖ್ಯೆ: ಇಡಿ 80 ಹೆಚ್‌ಪಿಸಿ 2020, ಬೆಂಗಳೂರು ದಿನಾಂಕ: 18.05.2020 ರನ್ವಯ ಸದರಿ ಕಾಲೇಜನ್ನು ಶಾಂತಿನಗರ, ಬೆಂಗಳೂರು ಇಲ್ಲಿಗೆ ಸ್ಥಳಾಂತರಿಸಲಾಗಿರುತ್ತದೆ. ಸದರಿ ಕಾಲೇಜಿನಲ್ಲಿ ಹಾಲಿ ಅಭ್ಯಸಿಸುತ್ತಿದ್ದ ವಿದ್ಯಾರ್ಥಿಗಳಿಗೆ ಸಮೀಪದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅಧ್ಯಯನವನ್ನು ಮುಂದುವರೆಸಲು ಅವಕಾಶ ಮಾಡಿಕೊಡತಕ್ಕದೆಂದು ನಿರ್ದೇಶನ ನೀಡಲಾಗಿದೆ.

ಇಡಿ 164 ಡಿಸಿಇ 2020

(ಡಾ. ಅಶ್ವಥ್ ನಾರಾಯಣ ಸಿ.ಎನ್.)
ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ)

ಕರ್ನಾಟಕ ವಿಧಾನಸಭೆ

1)	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1271
2)	ಮಾನ್ಯ ಸದಸ್ಯರ ಹೆಸರು	ಶ್ರೀ ಸುರೇಶ್ ಗೌಡ (ನಾಗಮಂಗಲ)
3)	ಉತ್ತರಿಸಬೇಕಾದ ದಿನಾಂಕ	24/09/2020
4)	ಉತ್ತರಿಸುವವರು	ಉಪ ಮುಖ್ಯಮಂತ್ರಿಗಳು ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಸಚಿವರು

****

ಕ್ರ ಸಂ	ಪ್ರಶ್ನೆ	ಉತ್ತರ
ಅ)	ಉದ್ಯೋಗ ವಿನಿಮಯ ಕೇಂದ್ರಗಳ ಕಾರ್ಯಗಳು ಯುವಶಕ್ತಿಯನ್ನೇ ಮುಖ್ಯವಾಗಿ ಒಳಗೊಂಡಿರುವುದರಿಂದ ಸಾರ್ವಜನಿಕ ವಲಯದಲ್ಲಿರುವ ನಂಬಿಕೆ ಹಾಗೂ ವಿಶ್ವಾಸವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು;	ಉದ್ಯೋಗ ವಿನಿಮಯ ಕೇಂದ್ರಗಳ ಕಾರ್ಯಗಳು ಸಾರ್ವಜನಿಕ ವಲಯದಲ್ಲಿರುವ ನಂಬಿಕೆ ಹಾಗೂ ವಿಶ್ವಾಸವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಸರ್ಕಾರದ ಕ್ರಮಗಳು ಈ ಕೆಳಕಂಡಂತೆ ಇರುತ್ತವೆ. 1. ಕೇಂದ್ರ ಸರ್ಕಾರದ ಅನುದಾನದ ಅಡಿ ಈಗಾಗಲೇ ಮೈಸೂರು, ಹಾಸನ, ಹುಬ್ಬಳ್ಳಿ-ಧಾರವಾಡ, ಮತ್ತು ಕಲಬುರಗಿ ಉದ್ಯೋಗ ವಿನಿಮಯ ಕಚೇರಿಗಳನ್ನು ಮಾದರಿ ವೃತ್ತಿ ಕೇಂದ್ರಗಳನ್ನಾಗಿ ಪರಿವರ್ತಿಸಲಾಗಿದೆ. ಪ್ರಸ್ತುತ ಸಾಲಿನಲ್ಲಿ ತುಮಕೂರು ಕೋಲಾರ, ಮಂಗಳೂರು, ದಾವಣಗೆರೆ, ಹಾಗೂ ಬಳ್ಳಾರಿ, ಈ ಕಚೇರಿಗಳನ್ನು ಮಾದರಿ ವೃತ್ತಿ ಕೇಂದ್ರಗಳನ್ನಾಗಿ (Model Career Centre) ಪರಿವರ್ತಿಸುವ ಕಾರ್ಯಗಳು ಪ್ರಗತಿಯಲ್ಲಿದೆ. ಈ ಕೇಂದ್ರಗಳು ಉದ್ಯೋಗಾಕಾಂಕ್ಷಿಗಳಿಗೆ ಸಮಾಲೋಚನೆ ಹಾಗೂ ಅಲ್ಪಾವಧಿ ಕೌಶಲ್ಯ ತರಬೇತಿ ನೀಡುವ ಮೂಲಕ ಲಭ್ಯವಿರುವ ಉದ್ಯೋಗಗಳನ್ನು ಪಡೆದುಕೊಳ್ಳಲು ಸಹಾಯವಾಗಲಿದೆ. 2. YES (Youth Employability Services):- ರಾಜ್ಯದ ಎಲ್ಲಾ 29 ಉದ್ಯೋಗ ವಿನಿಮಯ ಕಚೇರಿಗಳಲ್ಲಿ YES ಕಾರ್ಯಕ್ರಮ ಪ್ರಾರಂಭಿಸಲಾಗಿದ್ದು ಆ ಮೂಲಕ ಉದ್ಯೋಗಾಕಾಂಕ್ಷಿಗಳಿಗೆ ವೃತ್ತಿ ಮಾರ್ಗದರ್ಶನ, ಸಮಾಲೋಚನೆ, ಅಲ್ಪಾವಧಿ ಕೌಶಲ್ಯ ತರಬೇತಿ ನೀಡಲಾಗುತ್ತಿದೆ. ಸ್ಥಳೀಯವಾಗಿ ಲಭ್ಯವಿರುವ ಕೈಗಾರಿಕೆಗಳಿಗೆ ಭೇಟಿ ನೀಡಿ ಅಲ್ಲಿ ಲಭ್ಯವಿರುವ ಉದ್ಯೋಗ ಅವಕಾಶಗಳ ಮಾಹಿತಿ ಪಡೆದುಕೊಂಡು ಮಿನಿ ಉದ್ಯೋಗ ಮೇಳಗಳನ್ನು ಏರ್ಪಡಿಸುವ ಮೂಲಕ ಉದ್ಯೋಗಾಕಾಂಕ್ಷಿಗಳಿಗೆ ಉದ್ಯೋಗವನ್ನು ಒದಗಿಸಿಕೊಡಲು ಸಹಕರಿಸುತ್ತಿವೆ. 3. ಸ್ಟಡಿ ಸರ್ಕಲ್ : ಸರ್ಕಾರಿ ವಲಯದ ಎಲ್ಲಾ ಹುದ್ದೆಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕವೇ ನೇಮಕಾತಿಯಾಗುತ್ತಿರುವ ಹಿನ್ನೆಲೆಯಲ್ಲಿ, ರಾಜ್ಯದ ಎಲ್ಲಾ ಉದ್ಯೋಗ ವಿನಿಮಯ ಕಚೇರಿಗಳಲ್ಲಿ ಸ್ಟಡಿ ಸರ್ಕಲ್ ಮೂಲಕ ಉಚಿತ ಪರೀಕ್ಷಾಪೂರ್ವ ತರಬೇತಿ ಕಾಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. 4. ಉದ್ಯೋಗ ವಿಭಾಗದ ಸೇವೆಯನ್ನು ಸಕಾಲ ಸೇವೆಯ ಅಡಿಯಲ್ಲಿ ತರಲಾಗಿದೆ.
ಆ)	ರಾಜ್ಯದಲ್ಲಿ ತಾಂತ್ರಿಕ ಶಿಕ್ಷಣ ನೀಡುವ ಸಂಸ್ಥೆಗಳನ್ನು ಒಂದೆಡೆ ತರುವ ನಿಟ್ಟಿನಲ್ಲಿ ಕೈಗೊಂಡಿರುವ ಕ್ರಮಗಳೇನು; ಇಲಾಖೆಯ ತರಬೇತಿ ವಿಭಾಗದ ಕಾರ್ಯಚಟುವಟಿಕೆಗಳು ಸಂಪೂರ್ಣವಾಗಿ ತಾಂತ್ರಿಕ ಶಿಕ್ಷಣ ನೀಡುವುದೇ ಆಗಿರುವುದರಿಂದ ಈ ವಿಭಾಗವನ್ನು ತಾಂತ್ರಿಕ ಶಿಕ್ಷಣ ಇಲಾಖೆಯೊಂದಿಗೆ ವಿಲೀನಗೊಳಿಸುವುದು ಸೂಕ್ತವಾಗಿದ್ದು, ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು;	ಅನ್ವಯಿಸುವುದಿಲ್ಲ.

ಇ)	ಕೌಶಲ್ಯಾಭಿವೃದ್ಧಿಯ ಬಹುತೇಕ ಚಟುವಟಿಕೆಗಳು ಉದ್ಯೋಗ ವಿನಿಮಯ ಕೇಂದ್ರಗಳ ಕಾರ್ಯಗಳಾಗಿರುವುದರಿಂದ ಕೌಶಲ್ಯ ಮಿಷನ್ ನ ಚಟುವಟಿಕೆಗಳನ್ನು ಉದ್ಯೋಗ ವಿನಿಮಯ ಕೇಂದ್ರದ ಚಟುವಟಿಕೆಗಳೊಂದಿಗೆ ವಿಲೀನಗೊಳಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು;	ಪ್ರಸ್ತುತ ಕೌಶಲ್ಯ ಮಿಷನ್ ನ್ನು ಕರ್ನಾಟಕ ವೃತ್ತಿ ತರಬೇತಿ ಮತ್ತು ಕೌಶಲ್ಯಾಭಿವೃದ್ಧಿ ನಿಗಮ ನಿಯಮಿತದೊಂದಿಗೆ ವಿಲೀನಗೊಳಿಸಿ, ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮವೆಂದು ಮರು ನಾಮಕರಣ ಮಾಡಿ ಕಾರ್ಯನಿರ್ವಹಿಸಲಾಗುತ್ತಿದೆ. ಕೌಶಲ್ಯಾಭಿವೃದ್ಧಿ ನಿಗಮದಿಂದ ಅಲ್ಪಾವಧಿ ತರಬೇತಿ ಕಾರ್ಯಕ್ರಮಗಳನ್ನು ನಡೆಸಿ ಉದ್ಯೋಗ ಕಲ್ಪಿಸುವ ಗುರಿ ಹೊಂದಿ ಕಾರ್ಯನಿರ್ವಹಿಸುತ್ತಿದೆ. ಕೌಶಲ್ಯ ಮಿಷನ್ ನ್ನು ಉದ್ಯೋಗ ವಿನಿಮಯ ಕೇಂದ್ರದೊಂದಿಗೆ ವಿಲೀನಗೊಳಿಸುವ ಪ್ರಸ್ತಾವನೆಯು ಸರ್ಕಾರದ ಮುಂದೆ ಇರುವುದಿಲ್ಲ.
ಈ)	ಇಲಾಖೆಯ ಅಡಿಯಲ್ಲಿ ಯು.ಎನ್.ಡಿ.ಪಿ ಯೋಜನೆಯ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಸ್.ಪಿ.ಎಂ.ಯು ಘಟಕವು ಉದ್ಯೋಗ ವಿನಿಮಯ ಕೇಂದ್ರಗಳ ಚಟುವಟಿಕೆಗಳಾದ ಅಭ್ಯರ್ಥಿಗಳ ನೋಂದಣಿ, ಸ್ಟಡಿಸರ್ಕಲ್, ಉದ್ಯೋಗ ಮೇಳ, ವೃತ್ತಿ ಮಾರ್ಗದರ್ಶನ ಹಾಗೂ ಇತರೆ ಕಾರ್ಯಕ್ರಮಗಳನ್ನು ತನ್ನ ಕಾರ್ಯಗಳೆಂದು ವರದಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ರೀತಿಯ ನಕಲಿ ವರದಿಗಳನ್ನು ನಿಯಂತ್ರಿಸುವಲ್ಲಿ ಕೈಗೊಂಡಿರುವ ಕ್ರಮಗಳೇನು; ಕಳೆದ ಮೂರು ವರ್ಷಗಳಿಂದ ಈ ಯೋಜನೆಯಡಿಯಲ್ಲಿ ಬಿಡುಗಡೆಯಾಗಿರುವ ಅನುದಾನ ಎಷ್ಟು (ಅನುದಾನದ ಬಳಕೆಯ ವಿವರ ನೀಡುವುದು);	ರಾಜ್ಯದ 29 ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರಗಳಲ್ಲಿ UNDP (ಯು.ಎನ್.ಡಿ.ಪಿ) ಸಹಯೋಗದೊಂದಿಗೆ YES ಕಾರ್ಯಕ್ರಮವನ್ನು ಆರಂಭಿಸಿದ್ದು ಇದರ ಉಸ್ತುವಾರಿಯನ್ನು ವಹಿಸಲು ಪ್ರಾಜೆಕ್ಟ್ ಮ್ಯಾನೇಜ್‌ಮೆಂಟ್ ಯೂನಿಟ್ (PMU) ಅನ್ನು ಸಿ.ಐ.ಐ ಸಹಕಾರದೊಂದಿಗೆ ಆಯುಕ್ತಾಲಯದಲ್ಲಿ ವ್ಯವಸ್ಥೆಗೊಳಿಸಲಾಗಿತ್ತು. ಈ ಯೋಜನೆಯು ಪ್ರಮುಖವಾಗಿ ಉದ್ಯೋಗ ವಿನಿಮಯ ಕಚೇರಿಗಳಲ್ಲಿ ಲಭ್ಯವಿರುವ ಮಾನವ ಸಂಪನ್ಮೂಲಕ್ಕೆ ಅಗತ್ಯ ತರಬೇತಿ ಮೂಲಕ ಚುರುಕುಗೊಳಿಸುವುದು ಉದ್ಯೋಗ ವಿನಿಮಯ ಕಚೇರಿಗಳಿಗೆ ವೆಬ್‌ಸೈಟ್ ತಯಾರಿಸುವುದು ಖಾಸಗಿ ನಿಯೋಜಕರ ಸಹಕಾರದೊಂದಿಗೆ ಒಂದು ಟಾಸ್ಕ್ ಫೋರ್ಸ್ ಸಮಿತಿ ರಚಿಸುವುದು. ಅಭ್ಯರ್ಥಿಗಳಿಗೆ ತರಬೇತಿ ನೀಡಿ ಸೂಕ್ತ ಉದ್ಯೋಗ ದೊರಕಿಸುವ ಅಂಶಗಳನ್ನು ಒಳಗೊಂಡಿರುತ್ತದೆ. YES-PMU (ಎಸ್-ಪಿ.ಎಂ.ಯು) ಉದ್ಯೋಗ ವಿನಿಮಯ ಕಚೇರಿಗಳ ಅಂಕಿ ಅಂಶವನ್ನು ಸಂಗ್ರಹಿಸಿ ಕ್ರೋಢಿಕರಣ ಮಾತ್ರ ಮಾಡುತ್ತಿರುವುದರಿಂದ ಡೂಪ್ಲಿಕೇಶನ್‌ಗೆ ಅವಕಾಶವಿರುವುದಿಲ್ಲ. ಸದರಿ ಕಾರ್ಯಗಳನ್ನು ನಿರ್ವಹಿಸಲು UNDP 2018-19ನೇ ಸಾಲಿನಲ್ಲಿ ರೂ. 1.16 ಕೋಟಿ ಹಣವನ್ನು ಬಿಡುಗಡೆ ಮಾಡಿರುತ್ತದೆ. ಇದುವರೆಗೂ ಒಟ್ಟು ರೂ.1.03,87,000 ಕೋಟಿ ವೆಚ್ಚ ಮಾಡಲಾಗಿದೆ. 2019 ಡಿಸೆಂಬರ್ ಅಂತ್ಯಕ್ಕೆ ಈ ಯೋಜನೆಯು ಮುಕ್ತಾಯವಾಗಿರುತ್ತದೆ. ಇದರ ಉಪಯುಕ್ತತೆಯನ್ನು ಮನಗೊಂಡು ಸರ್ಕಾರವು ತನ್ನ ಆದೇಶ ಸಂಖ್ಯೆ: ಕೌಉಜೀಇ 35 ಕೌಗುಪ 2020, ಬೆಂಗಳೂರು ದಿನಾಂಕ; 4-9-2020 ರ ಆದೇಶದಲ್ಲಿ ಈ ಯೋಜನೆಯನ್ನು ಮುಂದುವರೆಸಲು ಆದೇಶಿಸಿರುತ್ತದೆ.
ಉ)	ಬೃಹತ್ ಉದ್ಯೋಗ ಮೇಳಗಳ ಫಲಿತಾಂಶ ನಿರಾಶಾದಾಯಕವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ರಾಜ್ಯದಲ್ಲಿರುವ ಗ್ರಾಮೀಣ ಪ್ರದೇಶದ ಉದ್ಯೋಗಾಕಾಂಕ್ಷಿಗಳಿಗೆ ಉಪಯೋಗ ಆಗುವಂತಹ ವಿಧಾನಸಭಾ ಕ್ಷೇತ್ರ ಮಟ್ಟದ ಉದ್ಯೋಗ ಮೇಳಗಳನ್ನು ಆಯೋಜಿಸಲು ಸಾಧ್ಯವಿಲ್ಲವೆ;	2019-20ನೇ ಸಾಲಿನಲ್ಲಿ ನಿಗಮದಿಂದ 8 ಉದ್ಯೋಗ ಮೇಳಗಳನ್ನು ನಡೆಸಲಾಗಿದ್ದು, ಸದರಿ ಉದ್ಯೋಗ ಮೇಳಗಳಲ್ಲಿ 1039 ಕಂಪನಿಗಳು ಯಶಸ್ವಿಯಾಗಿ ಭಾಗವಹಿಸಿದ್ದು, 10115 ಉದ್ಯೋಗಾಕಾಂಕ್ಷಿಗಳು ಉದ್ಯೋಗಾವಕಾಶವನ್ನು ಪಡೆದಿರುತ್ತಾರೆ. ಅದರಂತೆ ಸರ್ಕಾರದ ಆದೇಶದನ್ವಯ ರಾಜ್ಯಮಟ್ಟದ, ಪ್ರಾದೇಶಿಕ ಮಟ್ಟ ಹಾಗೂ ಜಿಲ್ಲಾ ಮಟ್ಟಗಳಲ್ಲಿ ಉದ್ಯೋಗ ಮೇಳಗಳನ್ನು ಆಯೋಜಿಸಲಾಗುತ್ತಿದ್ದು, ರಾಜ್ಯದ ಎಲ್ಲಾ ಉದ್ಯೋಗಾಕಾಂಕ್ಷಿಗಳು ಭಾಗವಹಿಸಿ ಉದ್ಯೋಗ ಪಡೆಯಬಹುದಾಗಿದೆ. ಗ್ರಾಮೀಣ ಪ್ರದೇಶದ ಉದ್ಯೋಗಾಕಾಂಕ್ಷಿಗಳಿಗೆ ಅನುಕೂಲವಾಗುವಂತೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಗಳಿಂದ ಮಿನಿ ಉದ್ಯೋಗ ಮೇಳಗಳನ್ನು ಕೈಗಾರಿಕಾ ಪ್ರದೇಶಗಳಿಗೆ ಅನುಗುಣವಾಗಿ ಹಮ್ಮಿಕೊಳ್ಳಲಾಗುತ್ತಿದೆ.
ಊ)	ಉದ್ಯೋಗ ವಿನಿಮಯ ಕೇಂದ್ರಗಳಿಗೆ ಕಾಯಕಲ್ಪ ನೀಡುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಒಟ್ಟಾರೆ ಉಪಯುಕ್ತ ಕ್ರಮಗಳೇನು (ಸಂಪೂರ್ಣ ಮಾಹಿತಿ ನೀಡುವುದು)?	ಕ್ರಸಂಖ್ಯೆ: (ಅ) ರಲ್ಲಿರುವಂತೆ

ಸಂಖ್ಯೆ: ಕೌಉಜೀಇ 50 ಕೈತಪ್ರ 2020

(ಡಾ.ಸಿ.ಎನ್.ಅಶ್ವಥ್ ನಾರಾಯಣ)
ಉಪ ಮುಖ್ಯಮಂತ್ರಿಗಳು ಹಾಗೂ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1273
ಮಾನ್ಯ ಸದಸ್ಯರ ಹೆಸರು	ಶ್ರೀ ಶಿವಲಿಂಗೇಗೌಡ ಕೆ.ಎಂ (ಅರಸೀಕೆರೆ)
ಉತ್ತರಿಸಬೇಕಾದ ದಿನಾಂಕ	24.09.2020
ಉತ್ತರಿಸುವ ಸಚಿವರು	ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರಸಂ	ಪ್ರಶ್ನೆ	ಉತ್ತರ
ಅ)	ಹಾಸನ ನಗರದ ಗಂಧದಕೋಟಿ ಆವರಣದಲ್ಲಿ ಗಂಧದಕೋಟಿ ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, 02 ಬಾಲಕಿಯರ ಪದವಿ ಪೂರ್ವ ಕಾಲೇಜುಗಳಿದ್ದು, ಈ ಕಾಲೇಜುಗಳಲ್ಲಿ ಹಾಸನ ಜಿಲ್ಲೆ ಮತ್ತು ಸುತ್ತಮುತ್ತಲಿನ ಜಿಲ್ಲೆಗಳಿಂದ ಸುಮಾರು 2500ಕ್ಕೂ ಹೆಚ್ಚು ಬಡಕುಟುಂಬಗಳ ವಿದ್ಯಾರ್ಥಿನಿಯರು ವ್ಯಾಸಂಗ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
ಆ)	ಹಾಗಿದ್ದಲ್ಲಿ, ಗಂಧದಕೋಟಿ ಆವರಣದಲ್ಲಿರುವ ಖಾಲಿ ಜಾಗದಲ್ಲಿ ವಿವಿಧ ಬಾಲಕಿಯರ ವಸತಿ ನಿಲಯಗಳ ಒಟ್ಟು 500 ವಿದ್ಯಾರ್ಥಿನಿಯರಿಗೆ ವಸತಿ ಸೌಲಭ್ಯ ಒದಗಿಸುವ 04 ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣಕ್ಕಾಗಿ ಜುಲೈ 2019ರಲ್ಲಿ ಸಲ್ಲಿಸಿದ ಪ್ರಸ್ತಾವನೆಯು ಯಾವ ಹಂತದಲ್ಲಿದೆ;	ಹಾಸನ ನಗರದ ಗಂಧದಕೋಟಿ ಆವರಣದಲ್ಲಿರುವ 4.20 ಎಕರೆ ನಿವೇಶನದ ಪೈಕಿ 3.02 ಎಕರೆ ಪ್ರದೇಶವನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಮಂಜೂರು ಮಾಡಿದ್ದು, ಈ ನಿವೇಶನದಲ್ಲಿ ಕೆಳಕಂಡ 04 ಮೆಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣಕ್ಕೆ ಜಿಲ್ಲಾಧಿಕಾರಿಗಳು, ಹಾಸನ ಜಿಲ್ಲೆ ಇವರು ದಿನಾಂಕ:07.06.2019ರಲ್ಲಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ. ಇವುಗಳಲ್ಲಿ, ಮೆಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿನಿಲಯ(ವಿ–2), ಹಾಸನ ಟೌನ್(ಹೆಚ್.ಐ.ಸಿ–2027) ಮತ್ತು ಮೆಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿನಿಲಯ, ಹಾಸನ ಟೌನ್(ಹೆಚ್.ಐ.ಸಿ–2029) ಈ ವಿದ್ಯಾರ್ಥಿಗಳ ಕಟ್ಟಡ ನಿರ್ಮಾಣವನ್ನು 2019–20ನೇ ಸಾಲಿನ ನಬಾರ್ಡ್‌ನ ಆರ್.ಐ.ಡಿ.ಎಫ್–25ನೇ ಟ್ರಾಂಚ್ ಯೋಜನೆಯಡಿ ಕೈಗೊಳ್ಳಲು ಪ್ರಸ್ತಾವನೆಯನ್ನು ನಬಾರ್ಡ್ ಸಂಸ್ಥೆಗೆ ಸಲ್ಲಿಸಲಾಗಿತ್ತು, ನಬಾರ್ಡ್ ಸಂಸ್ಥೆಯು ಅನುದಾನದ ಮಿತಿಯಿಂದಾಗಿ ಸದರಿ ಪ್ರಸ್ತಾವನೆಯನ್ನು ಹಿಂತಿರುಗಿಸಿರುತ್ತದೆ. ಉಳಿದ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯ(ವಿ–1), ಹಾಸನ ಟೌನ್(ಹೆಚ್.ಐ.ಸಿ–2028) ಮತ್ತು ಮೆಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿನಿಲಯ, ಹಾಸನ ಟೌನ್(ಹೊಸದು–2016)(ಹೆಚ್.ಐ.ಸಿ–2032) ಈ ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣಕ್ಕೆ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ ಸರ್ಕಾರದ ಪರಿಶೀಲನೆಯಲ್ಲಿದೆ.

ಇ)	ಸದರಿ ಪ್ರಸ್ತಾವನೆಯನ್ನು ಸಲ್ಲಿಸಿ ಒಂದು ವರ್ಷ ಕಳೆದರೂ ಸಹ ಅನುದಾನ ಮಂಜೂರು ಮಾಡಲು ವಿಳಂಬಕ್ಕೆ ಕಾರಣಗಳೇನು(ಸಂಪೂರ್ಣ ಮಾಹಿತಿ ನೀಡುವುದು)	ಹಾಸನ ಜಿಲ್ಲೆಗೆ ಈಗಾಗಲೇ 16 ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣಕ್ಕೆ ಮಂಜೂರಾತಿ ನೀಡಿದ್ದು, ಇವುಗಳ ನಿರ್ಮಾಣ ಕಾರ್ಯವು ಪ್ರಗತಿಯಲ್ಲಿರುತ್ತವೆ. ಪ್ರಸ್ತಾಪಿತ ಹಾಸನ ಜಿಲ್ಲೆಯ ಮೇಲ್ಕಂಡ 04 ಮೆಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿನಿಲಯಗಳ ಕಟ್ಟಡ ನಿರ್ಮಾಣವನ್ನು ಪ್ರತಿ ವರ್ಷ ಆಯವ್ಯಯದಲ್ಲಿ ಒದಗಿಸಲಾಗುವ ಅನುದಾನದ ಲಭ್ಯತೆಯನುಸಾರ ಆದ್ಯತೆ ಮೇರೆಗೆ ಪರಿಶೀಲಿಸಲಾಗುವುದು.

ಸಂಖ್ಯೆ:ಹಿಂವಕ 533 ಬಿಎಂಎಸ್ 2020

(ಬಿ.ಶ್ರೀರಾಮುಲು)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ 7ನೇ ಅಧಿವೇಶನ)

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1276

2) ಸದಸ್ಯರ ಹೆಸರು : ಶ್ರೀಮತಿ ರೂಪಕಲಾ ಎಂ (ಕೆ.ಜಿ.ಎಫ್)

3) ಉತ್ತರಿಸುವ ದಿನಾಂಕ : 24-09-2020

4) ಉತ್ತರಿಸುವವರು : ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು

ಕ್ರ ಸಂ	ಪ್ರಶ್ನೆ	ಉತ್ತರ
ಅ.	ಕೋಲಾರ ಜಿಲ್ಲೆಯ, ಕೆ.ಜಿ.ಎಫ್. ತಾಲ್ಲೂಕಿನ ಯಾವ ಅರಣ್ಯ ಪ್ರದೇಶಗಳಲ್ಲಿ ಕಾಡು ಪ್ರಾಣಿಗಳ ಹಾವಳಿಯಿಂದ ರೈತರ ಬೆಳೆ ನಷ್ಟ ಹೊಂದಿವೆ; ಯಾವ ಯಾವ ಬೆಳೆ ನಾಶವಾಗಿದೆ;	ಕೋಲಾರ ಜಿಲ್ಲೆಯ ಕೆ.ಜಿ.ಎಫ್ ತಾಲ್ಲೂಕಿನ ರಾಮಸಾಗರ-ಉಕ್ಕರಹಳ್ಳಿ ಮತ್ತು ದೊಡ್ಡಕಲ್ಲಹಳ್ಳಿ ಅರಣ್ಯ ಪ್ರದೇಶದ ಸುತ್ತಾ-ಮುತ್ತಾ ವನ್ಯಪ್ರಾಣಿಗಳ ಹಾವಳಿಯಿಂದ ರಾಗಿ, ಭತ್ತ, ಜೋಳ, ಆಲೂಗಡ್ಡೆ, ಬೀನ್ಸ್, ಬಾಳೆ, ತೆಂಗು, ಕೋಸು, ಟೊಮೆಟೋ ಹಾಗೂ ಇತರೆ ತರಕಾರಿ ಬೆಳೆಗಳು ನಾಶವಾಗಿರುತ್ತವೆ.
ಆ.	ಬೆಳೆಗಳ ಅಂದಾಜು ನಷ್ಟವೆಷ್ಟು; ನಷ್ಟಕ್ಕೊಳಗಾದ ರೈತರಿಗೆ ನೀಡಿರುವ ಪರಿಹಾರ ಧನವೆಷ್ಟು (ಜಿಲ್ಲಾವಾರು ಹಾಗೂ ತಾಲ್ಲೂಕುವಾರು ವಿವರ ಪ್ರತ್ಯೇಕವಾಗಿ ನೀಡುವುದು);	ಕೋಲಾರ ಜಿಲ್ಲೆಯಲ್ಲಿ ವನ್ಯಪ್ರಾಣಿಗಳ ಹಾವಳಿಯಿಂದ ಉಂಟಾಗಿರುವ ಬೆಳೆ ಹಾನಿಯ ತಾಲ್ಲೂಕುವಾರು ಪ್ರಕರಣಗಳ ಹಾಗೂ ಪಾವತಿಸಿದ ದಯಾತ್ಮಕಧನದ ವಿವರಗಳು ಈ ಕೆಳಕಂಡಂತಿದೆ:

(ರೂ. ಲಕ್ಷಗಳಲ್ಲಿ)

ಕ್ರ. ಸಂ.	ತಾಲ್ಲೂಕು	2017-18		2018-19		2019-20		2020-21 (ಆಗಸ್ಟ್ 2020 ರ ಅಂತ್ಯಕ್ಕೆ)	
		ಪ್ರಕರಣ ಸಂಖ್ಯೆ	ದಯಾತ್ಮಕ ಧನ	ಪ್ರಕರಣ ಸಂಖ್ಯೆ	ದಯಾತ್ಮಕ ಧನ	ಪ್ರಕರಣ ಸಂಖ್ಯೆ	ದಯಾತ್ಮಕ ಧನ	ಪ್ರಕರಣ ಸಂಖ್ಯೆ	ದಯಾತ್ಮಕ ಧನ
1	ಬಂಗಾರಪೇಟೆ	316	27.159	26	9.50	764	21.421	118	14.00
2	ಮಾಲೂರು	61	8.606	55	5.213	693	31.008	138	9.50
3	ಕೋಲಾರ	41	2.352	39	4.71	31	2.991	9	0.93
4	ಶ್ರೀನಿವಾಸಪುರ	-	-	05	0.458	-	-	-	-
	ಒಟ್ಟು:	418	38.117	125	19.881	1488	55.42	265	24.43

ಇ.	ಕಾಡು ಪ್ರಾಣಿಗಳಿಂದಾಗಿ ಪ್ರಾಣ ಹಾನಿ ಪ್ರಕರಣಗಳೆಷ್ಟು; ಸರ್ಕಾರ ನೀಡಿರುವ ಪರಿಹಾರ ಧನವೆಷ್ಟು (ವಿವರ ನೀಡುವುದು);	ಕೋಲಾರ ಜಿಲ್ಲೆಯಲ್ಲಿ ವನ್ಯಪ್ರಾಣಿಗಳ ದಾಳಿಯಿಂದ ಉಂಟಾದ ಮಾನವ–ಪ್ರಾಣಹಾನಿ ಹಾಗೂ ಪಾವತಿಸಿದ ದಯಾತ್ಮಕಧನದ ವಿವರಗಳು ಈ ಕೆಳಗಿನಂತಿದೆ:

(ರೂ. ಲಕ್ಷಗಳಲ್ಲಿ)

ಕ್ರ ಸಂ.	ತಾಲ್ಲೂಕು	2017-18		2018-19		2019-20		2020-21 (ಆಗಸ್ಟ್ 2020 ರ ಅಂತ್ಯಕ್ಕೆ)	
		ಪ್ರಕರಣ ಸಂಖ್ಯೆ	ದಯಾತ್ಮಕ ಧನ	ಪ್ರಕರಣ ಸಂಖ್ಯೆ	ದಯಾತ್ಮಕ ಧನ	ಪ್ರಕರಣ ಸಂಖ್ಯೆ	ದಯಾತ್ಮಕ ಧನ	ಪ್ರಕರಣ ಸಂಖ್ಯೆ	ದಯಾತ್ಮಕ ಧನ
1	**2**	**3**	**4**	**5**	**6**	**7**	**8**	**9**	**10**
1	ಬಂಗಾರಪೇಟೆ	**01**	**5.00**	**01**	**5.00**	-	-	-	-
2	ಮಾಲೂರು	-	-	-	-	**04**	**30.00**	**01**	**7.50**
	ಒಟ್ಟು:	**1**	**5.00**	**01**	**5.00**	**04**	**30.00**	**01**	**7.50**

*2020–21ನೇ ಸಾಲಿನಲ್ಲಿ ಒಂದು ಪ್ರಕರಣಕ್ಕೆ ಸಂಬಂಧಿಸಿದಂತೆ ವಾರಸುದಾರರ ದಾಖಲೆಗಳು ಸಲ್ಲಿಕೆಯಾದ ನಂತರ ದಯಾತ್ಮಕಧನ ಬಿಡುಗಡೆಗೆ ಕ್ರಮ ತೆಗೆದುಕೊಳ್ಳಲಾಗುವುದು.

ಈ	ಕೆ.ಜಿ.ಎಫ್. ತಾಲ್ಲೂಕಿನಲ್ಲಿ ಆನೆ ದಾಳಿಯಿಂದ ಪ್ರಾಣ ಹಾನಿಯಾಗಿದೆಯೇ; ಆನೆ ದಾಳಿಗೆ ಒಳಗಾಗಿ ಚಿಕಿತ್ಸೆ ಪಡೆದವರಿಗೆ ನೀಡಿದ ಪರಿಹಾರವೆಷ್ಟು? (ವಿವರ ನೀಡುವುದು)	ಕೋಲಾರ ಜಿಲ್ಲೆ ಕೆ.ಜಿ.ಎಫ್ ತಾಲ್ಲೂಕಿನಲ್ಲಿ ಕಾಡಾನೆ ದಾಳಿಯಿಂದ ಯಾವುದೇ ಮಾನವ ಪ್ರಾಣಹಾನಿ ಸಂಭವಿಸಿರುವುದಿಲ್ಲ. ಕಾಡಾನೆ ದಾಳಿಯಿಂದ ಉಂಟಾದ ಮಾನವಗಾಯ ಪ್ರಕರಣಗಳ ವಿವರ ಹಾಗೂ ಪಾವತಿಸಿದ ದಯಾತ್ಮಕಧನದ ವಿವರ ಕೆಳಕಂಡಂತಿದೆ:

ಕ್ರ ಸಂ.	ಹೆಸರು ಮತ್ತು ವಿಳಾಸ	ಪಾವತಿಸಿದ ದಯಾತ್ಮಕಧನ (ರೂ. ಗಳಲ್ಲಿ)
1	ಮಂಜುನಾಥ, ಜೆ.ಕೆ. ಪುರಗ್ರಾಮ, ಕೆ.ಜಿ.ಎಫ್‌ತಾಲ್ಲೂಕು	20,000.00
2	ರೀಗನ್ ಬಿನ್ ಜಯಶೀಲನ್, ಕೆ.ಜಿ.ಎಫ್‌ತಾಲ್ಲೂಕು	2,80,000.00

ಸಂಖ್ಯೆ: ಅಪಜೀ 150 ಎಫ್‌ಡಬ್ಲ್ಯೂಎಲ್ 2020

(ಆನಂದ್ ಸಿಂಗ್)
ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1278
ಸದಸ್ಯರ ಹೆಸರು	ಡಾ: ಕೆ.ಅನ್ನದಾನಿ
ಉತ್ತರಿಸಬೇಕಾದ ದಿನಾಂಕ:	24.09.2020
ಉತ್ತರಿಸುವ ಸಚಿವರು	ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ	ರಾಜ್ಯದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವ್ಯಾಪ್ತಿಯ ವಿದ್ಯಾರ್ಥಿ ನಿಲಯಗಳಲ್ಲಿ ಹೊರಸಂಪನ್ಮೂಲ ಏಜೆನ್ಸಿ ಮುಖಾಂತರ ಹೆಚ್ಚುವರಿಯಾಗಿ ಕಾರ್ಯನಿರ್ವಹಿಸುತ್ತಿದ್ದ ಅಡುಗೆಯವರು, ಅಡುಗೆ ಸಹಾಯಕರು ಮತ್ತು ರಾತ್ರಿ ಕಾವಲುಗಾರರನ್ನು ಸೇವೆಯಿಂದ ತೆಗೆದುಹಾಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
ಆ	ಇದರಿಂದಾಗಿ ವಿದ್ಯಾರ್ಥಿ ನಿಲಯಗಳ ನಿರ್ವಹಣೆ ಹಾಗೂ ಭದ್ರತೆಗೆ ಅಡಚಣೆ ಉಂಟಾಗಿ ವಿದ್ಯಾರ್ಥಿಗಳಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ನೇರ ನೇಮಕಾತಿ ಮೂಲಕ ಹುದ್ದೆಗಳನ್ನು ಭರ್ತಿ ಮಾಡಿದ ಕಾರಣದಿಂದ ಆ ಸ್ಥಳದಲ್ಲಿ ಹೊರಸಂಪನ್ಮೂಲ ಏಜೆನ್ಸಿ ಮೂಲಕ ಕಾರ್ಯನಿರ್ವಹಿಸುತ್ತಿದ್ದ ಹೊರಸಂಪನ್ಮೂಲ ಸಿಬ್ಬಂದಿಗಳನ್ನು ಬಿಡುಗಡೆಗೊಳಿಸಲಾಗಿದ್ದು, ಸದರಿ ಸ್ಥಳದಲ್ಲಿ ಖಾಯಂ ನೌಕರರು ಕಾರ್ಯನಿರ್ವಹಿಸುತ್ತಿರುವುದರಿಂದ ವಿದ್ಯಾರ್ಥಿಗಳಿಗೆ ಹಾಗೂ ವಿದ್ಯಾರ್ಥಿ ನಿಲಯಗಳ ನಿರ್ವಹಣೆಗೆ ಅಡಚಣೆಯಾಗಿರುವುದಿಲ್ಲ.
ಇ	ಈ ಹಿಂದೆ ಹಲವಾರು ವರ್ಷಗಳಿಂದ ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿದ್ದ ಅಡುಗೆಯವರು, ಅಡುಗೆ ಸಹಾಯಕರು ಮತ್ತು ರಾತ್ರಿ ಕಾವಲುಗಾರರನ್ನು ಸೇವೆಯಿಂದ ತೆಗೆದುಹಾಕಿರುವುದರಿಂದ ಇವರುಗಳ ಜೀವನ ನಿರ್ವಹಣೆಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ನೇರ ನೇಮಕಾತಿ ಮೂಲಕ ಹುದ್ದೆಗಳನ್ನು ಭರ್ತಿ ಮಾಡಿದ ಕಾರಣದಿಂದ ಆ ಸ್ಥಳದಲ್ಲಿ ಹೊರಸಂಪನ್ಮೂಲ ಏಜೆನ್ಸಿ ಮೂಲಕ ಕಾರ್ಯನಿರ್ವಹಿಸುತ್ತಿದ್ದ ಹೊರಸಂಪನ್ಮೂಲ ಸಿಬ್ಬಂದಿಗಳನ್ನು 2018-19 ನೇ ಸಾಲಿನಲ್ಲಿ ಬಿಡುಗಡೆಗೊಳಿಸಲಾಗಿತ್ತು. ನಂತರ ಮಾನವೀಯತೆ ದೃಷ್ಟಿಯಿಂದ ಸದರಿಯವರನ್ನು ಸರ್ಕಾರದ ಆದೇಶ 23.10.2018 1.2.2019 ರಂತೆ ದಿ: 5.8.2018 ರಿಂದ 7.6.2019 ರವರೆಗೆ ಮಾತ್ರ ಮುಂದುವರೆಸಲಾಗಿರುತ್ತದೆ.

ಈ	ಹಾಗಿದ್ದಲ್ಲಿ, ಮಾನವೀಯತೆ ಆಧಾರದ ಮೇಲೆ ಹಲವಾರು ವರ್ಷಗಳಿಂದ ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿದ್ದ ಅಡುಗೆಯವರು, ಅಡುಗೆ ಸಹಾಯಕರು ಮತ್ತು ರಾತ್ರಿ ಕಾವಲುಗಾರರನ್ನು ಹೊರಗುತ್ತಿಗೆ ಆಧಾರದ ಮೇಲೆ ಪುನರ್ ನೇಮಕಕ್ಕೆ ಸರ್ಕಾರ ಕ್ರಮ ಕೈಗೊಳ್ಳಲು ಮುಂದಾಗುವುದೇ (ಸಂಪೂರ್ಣ ಮಾಹಿತಿ ನೀಡುವುದು) ?	ಉದ್ಭವಿಸುವುದಿಲ್ಲ.

ಹಿಂವಕ 242 ಬಿಇಟಿ 2020

(ಬಿ.ಶ್ರೀರಾಮುಲು)

ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕರ್ನಾಟಕ ವಿಧಾನಸಭೆ

1)	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1287
2)	ಮಾನ್ಯ ಸದಸ್ಯರ ಹೆಸರು	ಶ್ರೀ ರಾಜಾ ವೆಂಕಟಪ್ಪ ನಾಯಕ್ (ಮಾನ್ವಿ)
3)	ಉತ್ತರಿಸಬೇಕಾದ ದಿನಾಂಕ	24/09/2020
4)	ಉತ್ತರಿಸುವವರು	ಉಪ ಮುಖ್ಯಮಂತ್ರಿಗಳು ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಸಚಿವರು

****

ಕ್ರ ಸಂ	ಪ್ರಶ್ನೆ	ಉತ್ತರ
ಅ)	ಉದ್ಯೋಗ ವಿನಿಮಯ ಕೇಂದ್ರದಲ್ಲಿ ಮಂಜೂರಾದ ಹುದ್ದೆಗಳನ್ನು ಮೇಲ್ದರ್ಜೆಗೇರಿಸುವ ಅಥವಾ ಪುನರ್ ವಿನ್ಯಾಸಗೊಳಿಸುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು; ಉದ್ಯೋಗ ವಿನಿಮಯ ವಿಭಾಗದ ಅಧಿಕಾರಿಗಳಿಗೆ ಹಾಗೂ ಸಿಬ್ಬಂದಿಗಳಿಗೆ ಪದೋನ್ನತಿ ನೀಡುವಲ್ಲಿ ಅನಗತ್ಯ ವಿಳಂಬವುಂಟಾಗಲು ಕಾರಣವೇನು;	ಇಲಾಖೆಯ ಉದ್ಯೋಗ ವಿಭಾಗದಲ್ಲಿ ಮಂಜೂರಾದ ಹುದ್ದೆಗಳನ್ನು ಮೇಲ್ದರ್ಜೆಗೇರಿಸುವ ಅಥವಾ ಪುನರ್ ವಿನ್ಯಾಸಗೊಳಿಸುವ ಬಗ್ಗೆ ಪ್ರಸ್ತುತ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. ಮುಂದುವರೆದು, ಇಲಾಖೆಯ ಉದ್ಯೋಗ ವಿಭಾಗದಲ್ಲಿ ರಿಕ್ತವಿರುವ ಗ್ರೂಪ್–ಬಿ, ಗ್ರೂಪ್–ಸಿ ಮತ್ತು ಗ್ರೂಪ್–ಡಿ ವೃಂದಕ್ಕೆ ಬಡ್ತಿ ನೀಡಲು ಇಲಾಖಾ ಮುಂಬಡ್ತಿ ಸಮಿತಿ ಸಭೆಯನ್ನು ನಡೆಸಿದ್ದು, ಮುಂಬಡ್ತಿ ಆದೇಶ ನೀಡುವ ಕ್ರಮ ಪ್ರಕ್ರಿಯೆಯಲ್ಲಿದೆ.
ಆ)	ಉದ್ಯೋಗ ವಿನಿಮಯ ಕೇಂದ್ರಗಳಲ್ಲಿ ಉದ್ಯೋಗಾಕಾಂಕ್ಷಿಗಳಿಗೆ ಅನುಕೂಲವಾಗುವಂತಹ ನೂತನ ಯೋಜನಗಳನ್ನು ಜಾರಿಗೆ ತರಲಾಗಿದೆಯೇ; (ವರ್ಷವಾರು ವಿವರ ನೀಡುವುದು)	ಹೌದು, ಯೋಜನೆಗಳ ವರ್ಷವಾರು ವಿವರ ಕೆಳಕಂಡಂತಿದೆ:– 1. <u>ಮಾದರಿ ವೃತ್ತಿ ಕೇಂದ್ರ– **(Model Career Centre)**</u> 2018–19 ನೇ ಸಾಲಿನಲ್ಲಿ ಮೈಸೂರು, ಹಾಸನ, ಕಲಬುರಗಿ ಮತ್ತು ಹುಬ್ಬಳ್ಳಿ ಉದ್ಯೋಗ ವಿನಿಮಯ ಕಚೇರಿಗಳನ್ನು ಮಾದರಿ ವೃತ್ತಿ ಕೇಂದ್ರಗಳನ್ನಾಗಿ ಪರಿವರ್ತಿಸಲಾಗಿದೆ. ಹಾಗೂ 2020–21 ನೇ ಸಾಲಿನಲ್ಲಿ ದಾವಣಗೆರೆ, ಕೋಲಾರ, ತುಮಕೂರು, ಬಳ್ಳಾರಿ ಮತ್ತು ಮಂಗಳೂರು ಉದ್ಯೋಗ ವಿನಿಮಯ ಕಚೇರಿಗಳನ್ನು ಉನ್ನತೀಕರಿಸಲು ಕ್ರಮವಹಿಸಲಾಗುತ್ತಿದೆ. 2. <u>ರಾಷ್ಟ್ರೀಯ ವೃತ್ತಿ ಸೇವೆ **(National Career Service)**</u> 2017–18 ನೇ ಸಾಲಿನಲ್ಲಿ– ಕೇಂದ್ರ ಸರ್ಕಾರದ ಅನುದಾನ ಬಳಸಿಕೊಂಡು ರಾಜ್ಯದ ಎಲ್ಲಾ ಉದ್ಯೋಗ ವಿನಿಮಯ ಕಚೇರಿಗಳಿಗೆ ಐ.ಟಿ. ಇನ್‌ಫ್ರಾಸ್ಟ್ರಕ್ಚರ್, ಸಿವಿಲ್ ಮತ್ತು ಎಲೆಕ್ಟ್ರಿಕಲ್ ಕಾಮಗಾರಿ, ಪೀಠೋಪಕರಣಗಳು ಒದಗಿಸಿ ಕಚೇರಿಗಳನ್ನು ಉನ್ನತೀಕರಿಸಲಾಗಿದೆ. ಉದ್ಯೋಗ ಮೇಳಗಳನ್ನು ಏರ್ಪಡಿಸುವ ಮೂಲಕ ಉದ್ಯೋಗಾವಕಾಶಗಳನ್ನು ಒದಗಿಸಲಾಗುತ್ತಿದೆ. 3. **<u>ಸ್ಟಡಿ ಸರ್ಕಲ್</u>** :– ಸರ್ಕಾರಿ ವಲಯದ ಎಲ್ಲಾ ಹುದ್ದೆಗಳನ್ನು ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕವೇ ನೇಮಕಾತಿ ಆಗುತ್ತಿರುವ ಹಿನ್ನೆಲೆಯಲ್ಲಿ, ರಾಜ್ಯ ಎಲ್ಲಾ ಉದ್ಯೋಗ ವಿನಿಮಯ ಕಚೇರಿಗಳಲ್ಲಿ 2005–06 ರಿಂದ ಸ್ಟಡಿ ಸರ್ಕಲ್ ಮೂಲಕ ಉಚಿತ ಪರೀಕ್ಷಾಪೂರ್ವ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.

--2

		4. **YES:- YES (Youth Employbility Services)** 2018–19 ನೇ ಸಾಲಿನಲ್ಲಿ– ರಾಜ್ಯದ ಎಲ್ಲಾ 29 ಉದ್ಯೋಗ ವಿನಿಮಯ ಕಚೇರಿಗಳಲ್ಲಿ YES ಕೇಂದ್ರಗಳನ್ನು ಪ್ರಾರಂಭಿಸಲಾಗಿದ್ದು ಆ ಮೂಲಕ ಉದ್ಯೋಗಾಕಾಂಕ್ಷಿಗಳಿಗೆ ವೃತ್ತಿ ಮಾರ್ಗದರ್ಶನ, ಸಮಾಲೋಚನೆ, ಅಲ್ಪಾವಧಿ ಕೌಶಲ್ಯ ತರಬೇತಿ ನೀಡಲಾಗುತ್ತಿದೆ. ಸ್ಥಳೀಯವಾಗಿ ಲಭ್ಯವಿರುವ ಕೈಗಾರಿಕೆಗಳಿಗೆ ಭೇಟಿ ನೀಡಿ ಅಲ್ಲಿ ಲಭ್ಯವಿರುವ ಉದ್ಯೋಗ ಅವಕಾಶಗಳ ಮಾಹಿತಿ ಪಡೆದುಕೊಂಡು ಮಿನಿ ಉದ್ಯೋಗ ಮೇಳಗಳನ್ನು ಏರ್ಪಡಿಸುವ ಮೂಲಕ ಉದ್ಯೋಗಾಕಾಂಕ್ಷಿಗಳಿಗೆ ಉದ್ಯೋಗವನ್ನು ಒದಗಿಸಿಕೊಡಲು ಸಹಕರಿಸುತ್ತಿವೆ.
ಇ)	ಪರಿಣಿತಿ ಹಾಗೂ ಅನುಭವ ಹೊಂದಿರುವ ಉದ್ಯೋಗ ವಿನಿಮಯ ವಿಭಾಗದ ಜಂಟಿ / ಉಪ ನಿರ್ದೇಶಕರುಗಳನ್ನು ಈ ಇಲಾಖೆಗಳಿಗೆ ನಿಯೋಜಿಸುವ ನಿಟ್ಟಿನಲ್ಲಿ ಸರ್ಕಾರದ ಕ್ರಮಗಳೇನು; (ಸಂಪೂರ್ಣ ಮಾಹಿತಿ ನೀಡುವುದು)	ಇಲಾಖೆಯ ಉದ್ಯೋಗ ವಿಭಾಗದಲ್ಲಿ ಪರಿಣಿತಿ ಹಾಗೂ ಅನುಭವ ಹೊಂದಿರುವ ಉದ್ಯೋಗ ವಿನಿಮಯ ವಿಭಾಗದ ಜಂಟಿ / ಉಪ ನಿರ್ದೇಶಕರುಗಳನ್ನು ನಿಯೋಜಿಸುವ ಕುರಿತಂತೆ ಪ್ರಸ್ತುತ ಯಾವುದೇ ಪ್ರಸ್ತಾವನೆ ಇರುವುದಿಲ್ಲ.
ಈ)	ಉದ್ಯೋಗ ವಿನಿಮಯ ಇಲಾಖೆಯಲ್ಲಿ ಖಾಲಿಯಿರುವ "ಗ್ರೂಪ್–ಬಿ, ಗ್ರೂಪ್–ಸಿ ಹಾಗೂ ಡಿ" ವೃಂದದ ಹುದ್ದೆಗಳ ಭರ್ತಿಗೆ ಕೈಗೊಂಡಿರುವ ಕ್ರಮಗಳೇನು; (ಸಂಪೂರ್ಣ ಮಾಹಿತಿ ನೀಡುವುದು)	ಇಲಾಖೆಯ ಉದ್ಯೋಗ ವಿಭಾಗದಲ್ಲಿ ರಿಕ್ತವಿರುವ ಗ್ರೂಪ್–ಬಿ, ಗ್ರೂಪ್–ಸಿ ಮತ್ತು ಗ್ರೂಪ್–ಡಿ ವೃಂದಕ್ಕೆ ಬಡ್ತಿ ನೀಡಲು ಇಲಾಖಾ ಮುಂಬಡ್ತಿ ಸಮಿತಿ ಸಭೆಯನ್ನು ನಡೆಸಿದ್ದು, ಮುಂಬಡ್ತಿ ಆದೇಶ ನೀಡುವ ಕ್ರಮ ಪ್ರಕ್ರಿಯೆಯಲ್ಲಿದ್ದು, ವಿವರಗಳು ಈ ಕೆಳಕಂಡಂತಿದೆ. 1) ಉದ್ಯೋಗಾಧಿಕಾರಿ–5 2) ಸಹಾಯಕ ಉದ್ಯೋಗಾಧಿಕಾರಿ–5 3) ಪ್ರಥಮ ದರ್ಜೆ ಸಹಾಯಕ–5 4) ಹಿರಿಯ ಬೆರಳಚ್ಚುಗಾರರು–1 5) ದಫೇದಾರ್–1
ಉ)	ಉದ್ಯೋಗ ವಿನಿಮಯ ಕೇಂದ್ರಗಳನ್ನು ಉದ್ಯೋಗ ವಿನಿಮಯ ಹಾಗೂ ಕೌಶಲ್ಯಾಭಿವೃದ್ಧಿ ಕೇಂದ್ರಗಳಾಗಿ ಪರಿವರ್ತಿಸುವ ಆಲೋಚನೆ ಸರ್ಕಾರದ ಮುಂದಿದೆಯೇ; ಹಾಗಿದ್ದರೆ, ಇಲ್ಲಿಯವರೆಗೆ ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣ ಮಾಹಿತಿ ನೀಡುವುದು)	ಇಲ್ಲ.

ಸಂಖ್ಯೆ: ಕೌಉಜೀಇ 46 ಕೈತಪ್ರ 2020

(ಡಾ.ಸಿ.ಎನ್.ಅಶ್ವಥ್ ನಾರಾಯಣ)
ಉಪ ಮುಖ್ಯಮಂತ್ರಿಗಳು ಹಾಗೂ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1297
ಸದಸ್ಯರ ಹೆಸರು : ಶ್ರೀ ಸೋಮಲಿಂಗಪ್ಪ ಎಂ.ಎಸ್. (ಸಿರಗುಪ್ಪ)
ಉತ್ತರಿಸುವ ದಿನಾಂಕ : 24-09-2020
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ಸಿರುಗುಪ್ಪ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಕರೂರು ಗ್ರಾಮವು ಜಿಲ್ಲಾ ಪಂಚಾಯಿತಿ ಕ್ಷೇತ್ರವಾಗಿದ್ದು ಈ ಗ್ರಾಮಕ್ಕೆ ಪದವಿ ಪೂರ್ವ ಕಾಲೇಜ್ ಬೇಡಿಕೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
ಆ)	ಬಂದಿದ್ದಲ್ಲಿ, ಸರ್ಕಾರದಿಂದ ಈ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗುವುದು;	ರಾಜ್ಯದ 361 ಸರ್ಕಾರಿ ಪ್ರೌಢ ಶಾಲೆಗಳನ್ನು ಉನ್ನತೀಕರಿಸಿ, ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನಾಗಿ ಉನ್ನತೀಕರಿಸಲು ಪ್ರಸ್ತಾವನೆ ಇದ್ದು, ಅದರಲ್ಲಿ ಸದರಿ ಕ್ರೋಢೀಕೃತ ಪ್ರಸ್ತಾವನೆಯಲ್ಲಿ ಸಿರುಗುಪ್ಪ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಕರೂರು ಗ್ರಾಮದ ಪ್ರೌಢ ಶಾಲೆಯನ್ನು ಉನ್ನತೀಕರಿಸಿ, ಸರ್ಕಾರಿ ಪದವಿ ಪೂರ್ವ ಕಾಲೇಜನ್ನಾಗಿ ಉನ್ನತೀಕರಿಸಲು ಪ್ರಸ್ತಾವನೆ ಇದ್ದು, ಈ ಸಂಬಂಧ ಕೆಳಕಂಡ ಮಾಹಿತಿಗಳನ್ನು ಕ್ರೋಢೀಕರಿಸಲಾಗುತ್ತಿದ್ದು, ಸದರಿ ವಿವರಗಳನ್ನು ಪಡೆದ ನಂತರ ಆರ್ಥಿಕ ಇಲಾಖೆಯ ಸಹಮತಿಗೆ ಕಳುಹಿಸಲು ಕ್ರಮವಹಿಸಲಾಗುವುದು. 1) ಈ ಕಾಲೇಜುಗಳನ್ನು ಉನ್ನತೀಕರಿಸುವ ಬಗ್ಗೆ ಮಾನದಂಡಗಳು; 2) ಉನ್ನತೀಕರಿಸುವಂತಹ ಪ್ರದೇಶಗಳಲ್ಲಿ ಎಸ್.ಎಸ್.ಎಲ್.ಸಿ. ಯಿಂದ ಪದವಿ ಪೂರ್ವ ಶಿಕ್ಷಣಕ್ಕೆ ಬರುವ ವಿದ್ಯಾರ್ಥಿಗಳ ಪ್ರತಿಶತ(Average) ವಿವರಗಳು; 3) ಕೆ.ಪಿ.ಶಾಲೆಗಳಡಿ ಈ ಕಾಲೇಜುಗಳನ್ನು ಉನ್ನತೀಕರಿಸಲು ಇರುವ ಅವಕಾಶದ ಬಗ್ಗೆ ಮಾಹಿತಿ; 4) ಪದವಿ ಪೂರ್ವ ಕಾಲೇಜಿನಲ್ಲಿ ವಿದ್ಯಾರ್ಥಿಗಳ ಗರಿಷ್ಠ/ಕನಿಷ್ಠ ಸಂಖ್ಯೆಯ ವಿವರ; 5) ಉಪನ್ಯಾಸಕರ ವಿವರಗಳ ಬಗ್ಗೆ ಸ್ಪಷ್ಟ ಸಂಖ್ಯೆಯ/ಮೊತ್ತದ ಮಾಹಿತಿ;

ಇ)	ಕಾಲೇಜ್ ಪ್ರಾರಂಭಿಸಲು ಇರುವ ಮಾನದಂಡಗಳೇನು ?	ಖಾಸಗಿ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಮಾನದಂಡಗಳನ್ನು ರೂಪಿಸಲಾಗಿದ್ದು, ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಯಾವುದೇ ನಿಖರವಾದ ಮಾನದಂಡವನ್ನು ರಚಿಸಲಾಗಿರುವುದಿಲ್ಲ. ಮುಂದುವರೆದು, ಸರ್ಕಾರಿ ಪದವಿ ಪೂರ್ವ ಕಾಲೇಜು ಪ್ರಾರಂಭಿಸುವ ಕುರಿತಂತೆ ಈ ಕೆಳಕಂಡ ಅಂಶಗಳನ್ನು ಪರಿಗಣಿಸಬಹುದಾಗಿದೆ. 1. ಉದ್ದೇಶಿತ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಸುತ್ತಮುತ್ತ ಇರುವ ಫೀಡಿಂಗ್ ಶಾಲೆಗಳ ಲಭ್ಯತೆ ಆಧಾರದ ಮೇಲೆ ಪರಿಗಣಿಸುವುದು. 2. ಉದ್ದೇಶಿಸಿರುವ ಪ್ರದೇಶಗಳ ಜನಸಂಖ್ಯೆ ಹಾಗೂ ದಾಖಲಾತಿ ಆಗುವ ವಿದ್ಯಾರ್ಥಿಗಳ ದಾಖಲಾತಿ ಪ್ರಮಾಣ. 3. ಆರ್ಥಿಕವಾಗಿ ಹಿಂದುಳಿದ ಪ್ರದೇಶದಲ್ಲಿ ಶೈಕ್ಷಣಿಕ ಪ್ರಗತಿಗೆ ಉತ್ತೇಜನ ನೀಡುವ ಕುರಿತಂತೆ.

ಸಂಖ್ಯೆ: ಇಪಿ 125 ಡಿಜಿಡಬ್ಲ್ಯೂ 2020

S. S.
(ಎಸ್.ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು.

ಕರ್ನಾಟಕ ವಿಧಾನಸಭೆ

1)	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1305
2)	ಮಾನ್ಯ ಸದಸ್ಯರ ಹೆಸರು	ಶ್ರೀ ವೆಂಕಟ್ ರಾವ್ ನಾಡಗೌಡ (ಸಿಂಧನೂರು)
3)	ಉತ್ತರಿಸಬೇಕಾದ ದಿನಾಂಕ	24/09/2020
4)	ಉತ್ತರಿಸುವವರು	ಉಪ ಮುಖ್ಯಮಂತ್ರಿಗಳು ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಸಚಿವರು

****

ಕ್ರ ಸಂ	ಪ್ರಶ್ನೆ	ಉತ್ತರ
ಅ)	ಉದ್ಯೋಗ ವಿನಿಮಯ ಕೇಂದ್ರಗಳಲ್ಲಿ ಸ್ವಯಂ ಉದ್ಯೋಗ ಹಾಗೂ ಉದ್ಯಮಶೀಲತೆ ಅಭಿವೃದ್ಧಿ ಕಾರ್ಯಕ್ರಮಗಳನ್ನು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ (ಸಂಪೂರ್ಣ ಮಾಹಿತಿ ನೀಡುವುದು);	ಇಲ್ಲ.
ಆ)	ಕೌಶಲ್ಯ ಮಿಷನ್ ಅಡಿಯಲ್ಲಿ ನಿರುದ್ಯೋಗ ಯುವಕ-ಯುವತಿಯರಿಗೆ ಕೌಶಲ್ಯ ತರಬೇತಿಗಳನ್ನು ನೀಡುವುದರ ಮುಖಾಂತರ ಉದ್ಯೋಗ ಅರ್ಹತೆಯನ್ನು ಹೆಚ್ಚಿಸಿ ಉದ್ಯೋಗ ಕಲ್ಪಿಸಿಕೊಡುವ ಕಾರ್ಯಕ್ರಮ ಸರ್ಕಾರದ ಮುಂದಿದೆಯೇ; (ಸಂಪೂರ್ಣ ಮಾಹಿತಿ ನೀಡುವುದು)	ಹೌದು. ರಾಜ್ಯದ ಯುವಕ-ಯುವತಿಯರಿಗೆ ಕೌಶಲ್ಯಾಧಾರಿತ ತರಬೇತಿ ನೀಡಿ ಉದ್ಯೋಗ ದೊರಕಿಸಿಕೊಡಲು ಮುಖ್ಯಮಂತ್ರಿಗಳ ಕೌಶಲ್ಯ ಕರ್ನಾಟಕ ಯೋಜನೆಯಡಿಯಲ್ಲಿ kaushalkar.com ನಡಿ ನೊಂದಣಿಗೊಂಡು ಮಾನ್ಯತೆ ಪಡೆದಂತಹ ಸರ್ಕಾರಿ / ಸರ್ಕಾರೇತರ ಸಂಸ್ಥೆಗಳ ಮುಖಾಂತರ ಹಾಗೂ ಪ್ರಧಾನ ಮಂತ್ರಿಗಳ ಕೌಶಲ್ಯ ವಿಕಾಸ ಯೋಜನೆಯಡಿಯಲ್ಲಿ ಕೇಂದ್ರ ಸರ್ಕಾರದ ಎನ್.ಎಸ್.ಡಿ.ಸಿ ಮಾರ್ಗಸೂಚಿಯನ್ವಯ ವಿವಿಧ ವೃತ್ತಿಗಳಡಿ ಕೌಶಲ್ಯಾಭಿವೃದ್ಧಿ ತರಬೇತಿ ನೀಡಲಾಗುತ್ತಿದೆ. ರಾಜ್ಯದಲ್ಲಿ ಮುಖ್ಯಮಂತ್ರಿಗಳ ಕೌಶಲ್ಯ ಕರ್ನಾಟಕ ಯೋಜನೆಯಡಿ 183 ತರಬೇತಿ ಸಂಸ್ಥೆಗಳು ಹಾಗೂ ಪ್ರಧಾನ ಮಂತ್ರಿಗಳ ಕೌಶಲ್ಯ ವಿಕಾಸ ಯೋಜನೆಯಡಿ 49 ಸಂಸ್ಥೆಗಳು ಕೌಶಲ್ಯಾಭಿವೃದ್ಧಿ ತರಬೇತಿಯನ್ನು ನೀಡುತ್ತಿರುತ್ತವೆ. ಅದರಂತೆ ಒಟ್ಟು 61065 ಅಭ್ಯರ್ಥಿಗಳಿಗೆ ಕೌಶಲ್ಯಾಧಾರಿತ ತರಬೇತಿ ನೀಡಲಾಗಿದ್ದು, 2019-20ನೇ ಸಾಲಿನಲ್ಲಿ ಮುಖ್ಯಮಂತ್ರಿಗಳ ಕೌಶಲ್ಯ ಕರ್ನಾಟಕ ಯೋಜನೆ (ಸಿ.ಎಂ.ಕೆ.ಕೆ.ವೈ) ಯಡಿ 47121 ಅಭ್ಯರ್ಥಿಗಳು ಹಾಗೂ ಪ್ರಧಾನ ಮಂತ್ರಿಗಳ ಕೌಶಲ್ಯ ವಿಕಾಸ ಯೋಜನೆ (ಪಿ.ಎಂ.ಕೆ.ವಿ.ವೈ) ಯಡಿ 13944 ಅಭ್ಯರ್ಥಿಗೆ ಕೌಶಲ್ಯಾಧಾರಿತ ತರಬೇತಿ ನೀಡಲಾಗಿರುತ್ತದೆ. ಮುಂದುವರೆದು 13988 ಅಭ್ಯರ್ಥಿಗಳಿಗೆ ಉದ್ಯೋಗಾವಕಾಶವನ್ನು ಕಲ್ಪಿಸಲಾಗಿರುತ್ತದೆ.

ಇ)	ಕೌಶಲ್ಯಾಭಿವೃದ್ಧಿಯ ಬಹುತೇಕ ಚಟುವಟಿಕೆಗಳು ಉದ್ಯೋಗ ವಿನಿಮಯ ಕೇಂದ್ರಗಳ ಕಾರ್ಯಗಳಾಗಿರುವುದರಿಂದ, ಕೌಶಲ್ಯ ಮಿಷನ್‌ನ್ನು ಉದ್ಯೋಗ ವಿಭಾಗದೊಂದಿಗೆ ವಿಲೀನಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ (ಸಂಪೂರ್ಣ ಮಾಹಿತಿ ನೀಡುವುದು);	ಇಲ್ಲ.
ಈ)	ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯ ಉದ್ಯೋಗ ವಿಭಾಗದ ವೃಂದ ಮತ್ತು ನೇಮಕಾತಿ ನಿಯಮಗಳು ಯಾವಾಗ ರಚನೆಯಾಗಿರುತ್ತದೆ (ಸಂಪೂರ್ಣ ಮಾಹಿತಿ ನೀಡುವುದು);	ಇಲಾಖೆಯ ಉದ್ಯೋಗ ವಿಭಾಗದ ವೃಂದ ಮತ್ತು ನೇಮಕಾತಿ ನಿಯಮಗಳು ದಿನಾಂಕ: 28-01-1961 ರಿಂದ ರಚನೆಯಾಗಿರುತ್ತದೆ ಮತ್ತು ಸರ್ಕಾರದ ಅಧಿಸೂಚನೆ ಸಂಖ್ಯೆ: ಕೌಉಜೀಇ 117 ಕೈತಸೇ 2018 ದಿನಾಂಕ: 01-07-2020 ರಂದು ವೃಂದ ಮತ್ತು ನೇಮಕಾತಿ ನಿಯಮವನ್ನು ಪರಿಷ್ಕರಿಸಿದೆ.
ಉ)	ಸದರಿ ನಿಯಮಗಳು ಪರಿಷ್ಕೃತಗೊಂಡು ಹಲವಾರು ವರ್ಷಗಳಾಗಿದ್ದು, ಉದ್ಯೋಗ ವಿಭಾಗದಲ್ಲಿನ ಮಂಜೂರಾದ ಹುದ್ದೆಗಳನ್ನು ಮೇಲ್ದರ್ಜೆಗೇರಿಸಲು ಅಥವಾ ಪುನರ್ ವಿನ್ಯಾಸಗೊಳಿಸಲು ಸಾಧ್ಯವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? (ಸಂಪೂರ್ಣ ಮಾಹಿತಿ ನೀಡುವುದು).	ಇಲ್ಲ.

ಸಂಖ್ಯೆ: ಕೌಉಜೀಇ 52 ಕೈತಪ್ರ 2020

(ಡಾ.ಸಿ.ಎನ್.ಅಶ್ವಥ್ ನಾರಾಯಣ)
ಉಪ ಮುಖ್ಯಮಂತ್ರಿಗಳು ಹಾಗೂ
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1308
ಸದಸ್ಯರ ಹೆಸರು : ಶ್ರೀ ಮುನಿಯಪ್ಪ.ವಿ (ಶಿಡ್ಲಘಟ್ಟ)
ಉತ್ತರಿಸಬೇಕಾದ ದಿನಾಂಕ : 24.09.2020
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು

ಕ್ರಸ	ಪ್ರಶ್ನೆ	ಉತ್ತರ
ಅ)	ಶಿಡ್ಲಘಟ್ಟ ವಿಧಾನಸಭಾಕ್ಷೇತ್ರ ವ್ಯಾಪ್ತಿಯಲ್ಲಿ ಎಷ್ಟು ಸರ್ಕಾರಿ ಶಾಲೆಗಳಲ್ಲಿ ಕೆ.ಪಿ.ಎಸ್ ಶಾಲೆಗಳನ್ನು ಪ್ರಾರಂಭ ಮಾಡಲಾಗಿದೆ?	ಶಿಡ್ಲಘಟ್ಟ ವಿಧಾನಸಭಾಕ್ಷೇತ್ರ ವ್ಯಾಪ್ತಿಯಲ್ಲಿ ಒಂದು ಕೆ.ಪಿ.ಎಸ್ ಶಾಲೆಯನ್ನು ಪ್ರಾರಂಭಿಸಲಾಗಿದೆ. (ಕರ್ನಾಟಕ ಪಬ್ಲಿಕ್ ಶಾಲೆ ಬಶೆಟ್ಟಹಳ್ಳಿ)
ಆ)	ಎಲ್ಲಾ ಶಾಲೆಗಳಲ್ಲಿ ಕೆ.ಪಿ.ಎಸ್ ಶಾಲೆಗಳನ್ನು ಪ್ರಾರಂಭ ಮಾಡುವ ಪ್ರಸ್ತಾವನೆ ಸರ್ಕಾರದ ಗಮನದಲ್ಲಿದೆಯೇ?	2019–20ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಮುಂದಿನ ನಾಲ್ಕು ವರ್ಷಗಳಲ್ಲಿ ಒಂದು ಸಾವಿರ ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಹೋಬಳಿ ಕೇಂದ್ರ ಸ್ಥಾನಗಳಲ್ಲಿ ಸ್ಥಾಪಿಸಲಾಗುವುದು ಎಂದು ಘೋಷಿಸಲಾಗಿರುತ್ತದೆ.
ಇ)	ಹಾಗಿದ್ದಲ್ಲಿ ಯಾವಾಗ ಪ್ರಾರಂಭ ಮಾಡಲಾಗುವುದು?	ಈಗಾಗಲೇ 2018–19ನೇ ಸಾಲಿನಲ್ಲಿ 176 ಮತ್ತು 2019–20ನೇ ಸಾಲಿನಲ್ಲಿ 100, ಒಟ್ಟು 276 ಕೆ.ಪಿ.ಎಸ್. ಶಾಲೆಗಳನ್ನು ಪ್ರಾರಂಭಿಸಲಾಗಿದೆ. ಉಳಿದ ಕೆ.ಪಿ.ಎಸ್ ಶಾಲೆಗಳನ್ನು ಹಂತಹಂತವಾಗಿ ಪ್ರಾರಂಭಿಸಲು ಕ್ರಮವಹಿಸಲಾಗುತ್ತಿದೆ.
ಈ)	ಸರ್ಕಾರಿ ಶಾಲೆಗಳಲ್ಲಿ ಕೆ.ಪಿ.ಎಸ್ ಶಾಲೆ ಪ್ರಾರಂಭ ಮಾಡಲು ಇರುವ ನಿಯಮಗಳೇನು? (ವಿವರ ನೀಡುವುದು)	ಸರ್ಕಾರಿ ಶಾಲೆಗಳಲ್ಲಿ ಕೆಪಿಎಸ್ ಶಾಲೆ ಪ್ರಾರಂಭ ಮಾಡಲು ಈ ಕೆಳಕಂಡ ಮಾನದಂಡಗಳನ್ನು ನಿಗದಿಪಡಿಸಿದೆ. 1. ಹಂತ–ಹಂತವಾಗಿ ಪ್ರತಿ ಹೋಬಳಿಗೆ ಒಂದು ಕೆಪಿಎಸ್ ಬರುವಂತೆ ಶಾಲೆಗಳನ್ನು ಆಯ್ಕೆ ಮಾಡುಲಾಗುವುದು. 2. ಸರ್ಕಾರಿ ಪ್ರಾಥಮಿಕ ಶಾಲೆ, ಪ್ರೌಢಶಾಲೆ ಮತ್ತು ಪಪವಿ ಪೂರ್ವ ಕಾಲೇಜುಗಳು ಒಂದೇ ಆವರಣದಲ್ಲಿ ಕಾರ್ಯನಿರ್ವಹಿಸುತ್ತಿರುವಲ್ಲಿ ಪ್ರಥಮ ಆದ್ಯತೆ ನೀಡಲಾಗುವುದು. 3. ಒಂದೇ ಆವರಣದಲ್ಲಿ ಕಾರ್ಯನಿರ್ವಹಿಸದಿರುವ ಆದರೆ ಅದೇ ಗ್ರಾಮ/ಪಟ್ಟಣ/ನಗರದಲ್ಲಿ ಸಮೀಪದಲ್ಲಿ ಕಾರ್ಯನಿರ್ವಹಿಸುವ) ಸರ್ಕಾರಿ ಪ್ರಾಥಮಿಕ ಶಾಲೆ, ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳನ್ನು

		ಆಯ್ಕೆ ಮಾಡಲಾಗುವುದು. 4. ಕ್ರಸಂ 2 ಮತ್ತು 3 ರಂತೆ ಶಾಲೆಗಳು ಲಭ್ಯವಿಲ್ಲದಿದ್ದಲ್ಲಿ, ಒಂದೇ ಆವರಣದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಸರ್ಕಾರಿ ಪ್ರಾಥಮಿಕ ಶಾಲೆ ಮತ್ತು ಸರ್ಕಾರಿ ಪ್ರೌಢಶಾಲೆಯನ್ನು ಆಯ್ಕೆಗೆ ಪರಿಗಣಿಸಲಾಗುವುದು. 5. ಎಲ್ಲಾ ವಿಧಾನ ಸಭಾ ಕ್ಷೇತ್ರಗಳಲ್ಲೂ ಕೆಪಿಎಸ್ ಶಾಲೆ ಇರುವಂತೆ ಶಾಲೆಗಳನ್ನು ಆಯ್ಕೆ ಮಾಡಲಾಗುವುದು. 6. ವಿದ್ಯಾರ್ಥಿಗಳ ದಾಖಲಾತಿ ಹೆಚ್ಚಾಗಿರುವ ಮತ್ತು ಸಾಕಷ್ಟು ಕೊಠಡಿಗಳನ್ನು ಹೊಂದಿರುವ ಶಾಲೆಗಳನ್ನು ಆದ್ಯತಾನುಸಾರ ಪರಿಗಣಿಸಲಾಗುವುದು. 7. ನಗರ ಪ್ರದೇಶದಲ್ಲಿ ಸೂಕ್ತ ಸ್ಥಳಾವಕಾಶ/ಆವರಣವನ್ನು ಹೊಂದಿರುವ ಶಾಲೆಗಳು ಮತ್ತು ಗ್ರಾಮ/ಪಟ್ಟಣ ಪ್ರದೇಶಗಳಲ್ಲಿ ಕನಿಷ್ಠ 3–5 ಎಕರೆ ಜಾಗವನ್ನು ಹೊಂದಿರುವ ಶಾಲೆಗಳನ್ನು ಆದ್ಯತಾನುಸಾರ ಪರಿಗಣಿಸಲಾಗುವುದು.
ಉ)	ಸದರಿ ನಿಯಮಗಳನ್ನು ಸಡಿಲಗೊಳಿಸಿ ಎಲ್ಲಾ ಶಾಲೆಗಳಲ್ಲಿ ಇಂಗ್ಲೀಷ್ ಮಾಧ್ಯಮ ಪ್ರಾರಂಭ ಮಾಡಲು ಸಾಧ್ಯವಿಲ್ಲವೇ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?	2019–20ನೇ ಸಾಲಿನಲ್ಲಿ 1000 ಸರ್ಕಾರಿ ಶಾಲೆಗಳಲ್ಲಿ ಒಂದನೇ ತರಗತಿಯಲ್ಲಿ ಆಂಗ್ಲ ಮಾಧ್ಯಮ ವಿಭಾಗವನ್ನು ಪ್ರಾರಂಭಿಸಲಾಗಿದೆ. 2020–21ನೇ ಸಾಲಿನಲ್ಲಿ 400 ಉರ್ದು ಶಾಲೆಗಳು ಸೇರಿದಂತೆ ಒಟ್ಟು 1400 ಶಾಲೆಗಳಲ್ಲಿ ಉಭಯ ಭಾಷಾ ಮಾಧ್ಯಮ ತರಗತಿಗಳನ್ನು ಪ್ರಾರಂಭಿಸಲು ಕ್ರಮವಹಿಸಲಾಗಿದೆ.

ಇಪಿ 176 ಯೋಸಕ 2020

(ಎಸ್.ಸುರೇಶ್ ಕುಮಾರ್)

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು

ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ, 7ನೇ ಅಧಿವೇಶನ)

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1309

2) ಸದಸ್ಯರ ಹೆಸರು : ಶ್ರೀ ಮುನಿಯಪ್ಪ ವಿ. (ಶಿಡ್ಲಘಟ್ಟ)

3) ಉತ್ತರಿಸುವ ದಿನಾಂಕ : 24-09-2020

4) ಉತ್ತರಿಸುವವರು : ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು

ಕ್ರಸಂ	ಪ್ರಶ್ನೆ	ಉತ್ತರ
ಅ)	ಕೆರೆಗಳಲ್ಲಿ ಮರಗಳು ಬೆಳೆದಿರುವುದರಿಂದ ನೀರು ಸಂಗ್ರಹಣೆಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಕೆರೆಗಳಲ್ಲಿ ಮರಗಳು ಬೆಳೆದಿರುವುದಿಂದ ನೀರು ಸಂಗ್ರಹಣೆಗೆ ಯಾವುದೇ ತೊಂದರೆ ಆಗುವುದಿಲ್ಲ. ಆದರೆ, ನೀರು ಸಂಗ್ರಹಣೆಯಿಂದ ಮರಗಳು ಸಾಯಬಹುದಾಗಿರುತ್ತದೆ.
ಆ)	ಶಿಡ್ಲಘಟ್ಟದಲ್ಲಿನ ಗೌಡನಕೆರೆ ಮತ್ತು ಅಮಾನಿ ಭದ್ರನ ಕೆರೆಯನ್ನು ಸಂರಕ್ಷಿತ ಅರಣ್ಯವೆಂದು ಪರಿಗಣಿಸಲಾಗಿದೆಯೇ;	ಶಿಡ್ಲಘಟ್ಟದಲ್ಲಿನ ಅಮಾನಿ ಭದ್ರನ ಕೆರೆ ಮತ್ತು ಗೌಡನ ಕೆರೆಗಳನ್ನು ಕರ್ನಾಟಕ ಅರಣ್ಯ ಕಾಯ್ದೆ 1963ರ ಕಲಂ-04ರಲ್ಲಿ ಅಧಿಸೂಚಿಸಲಾಗಿದೆ.
ಇ)	ಒಂದು ವೇಳೆ ಪರಿಗಣಿಸಿದ್ದಲ್ಲಿ, ಆ ಭಾಗದ ಜನರ ಹಿತದೃಷ್ಟಿಯಿಂದ ಆ ಎರಡು ಕೆರೆಗಳನ್ನು ಸಂರಕ್ಷಣೆ ಅರಣ್ಯದಿಂದ ವಿಮುಕ್ತಗೊಳಿಸಲಾಗುವುದೇ; ಕೆರೆಯ ಅಂಗಳದಲ್ಲಿರುವ ಮರಗಳನ್ನು ತೆರವುಗೊಳಿಸಲು ಕೆರೆಯ ಅಧಿಕಾರಿಗಳಿಂದ 2016ನೇ ಇಸವಿಯಿಂದ ಪ್ರಸ್ತಾವನೆ ಸಲ್ಲಿಸಲಾಗುತ್ತಿದೆಯೇ; ಸಲ್ಲಿಸಿದ್ದಲ್ಲಿ, ಈವರೆಗೂ ಒಂದು ಕೆರೆಯ ಮರಗಳನ್ನು ತೆರವುಗೊಳಿಸಲು ಚಾಲನೆ ನೀಡದಿರಲು ಕಾರಣವೇನು;	ಕರ್ನಾಟಕ ಅರಣ್ಯ ಕಾಯ್ದೆ 1963ರ ಕಲಂ-4ರ ಅಧಿಸೂಚಿತ ಪ್ರದೇಶಗಳಿಗೆ ಅರಣ್ಯ ವ್ಯವಸ್ಥಾಪನಾಧಿಕಾರಿ (Forest Settlement Officer)ರವರು ಸದರಿ ಕಾಯ್ದೆಯ ಕಲಂ-5 ಮತ್ತು ಇತರೆ ಕಲಂಗಳಂತೆ ಕ್ರಮ ಕೈಗೊಳ್ಳಬೇಕಾಗುತ್ತದೆ. ಈ ಪ್ರಕ್ರಿಯೆಗಳು ಬಾಕಿಯಿರುವ ಹಂತದಲ್ಲಿ ಸದರಿ ಪ್ರದೇಶಗಳನ್ನು ಅರಣ್ಯೇತರ ಉದ್ದೇಶಕ್ಕಾಗಿ ಬಳಕೆ ಅಥವಾ ಮರ ಕಡಿತಲೆ ಮಾಡಬೇಕಾದಲ್ಲಿ ಅರಣ್ಯ (ಸಂರಕ್ಷಣಾ) ಕಾಯ್ದೆ 1980ರಡಿ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ ಅನುಮತಿ ಪಡೆದುಕೊಳ್ಳಬೇಕಾಗುತ್ತದೆ.
ಈ)	ಇದರಿಂದಾಗಿ ಕೆರೆ ತುಂಬಿಸುವ ಯೋಜನೆಗೆ ಅಡೆತಡೆಯಾಗಿರುವುದರಿಂದ ಯಾವ ಕಾಲ ಮಿತಿಯೊಳಗೆ ಮರಗಳನ್ನು ತೆರವುಗೊಳಿಸಲಾಗುವುದು;	ಮೇಲೆ ನಮೂದಿಸಿದ ಎರಡು ಕೆರೆಗಳಲ್ಲಿ ನೀರು ತುಂಬಿಸುವ ಮತ್ತು ಮರಗಳನ್ನು ತೆಗೆಯಲು ಅರಣ್ಯ (ಸಂರಕ್ಷಣಾ) ಕಾಯ್ದೆ 1980ರಡಿ ಕೇಂದ್ರ ಸರ್ಕಾರದ ಅನುಮೋದನೆ ಅವಶ್ಯಕವಾಗಿರುತ್ತದೆ. ಅದರೆ, ಈ ಕುರಿತು ಸಣ್ಣ ನೀರಾವರಿ ಇಲಾಖೆಯಿಂದ ಯಾವುದೇ ಪ್ರಸ್ತಾವನೆ ಅರಣ್ಯ (ಸಂರಕ್ಷಣಾ) ಕಾಯ್ದೆ (Forest Conservation Act) 1980ರಡಿ ಸಲ್ಲಿಕೆಯಾಗಿರುವುದಿಲ್ಲ. ಉಳಿದ ಕೆರೆಗಳಲ್ಲಿನ ಮರಗಳನ್ನು ಚಿಕ್ಕಬಳ್ಳಾಪುರ ವಿಭಾಗದ ಕಾರ್ಯ ಯೋಜನೆಯಲ್ಲಿ ನಮೂದಿಸಿರುವಂತೆ ತೆರವುಗೊಳಿಸಲು ಕೇಂದ್ರ ಸರ್ಕಾರದ ಪ್ರಾದೇಶಿಕ ಅಧಿಕಾರಸ್ಥ ಸಮಿತಿ (Regional Empowerment Committee) ರವರ ಅನುಮೋದನೆ ಅವಶ್ಯಕವಾಗಿದ್ದು ಸೂಕ್ತ ಪ್ರಸ್ತಾವನೆ ಸಲ್ಲಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಕ್ರ.ಸಂ	ಪ್ರಶ್ನೆ	ಉತ್ತರ
ಉ)	ಮುಂದಿನ ಎಷ್ಟು ದಿನಗಳಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಯ ಕೆರೆ ತುಂಬಿಸುವ ಯೋಜನೆಗಳಿವೆ; ಸಂಬಂಧಿಸಿದ ಕೆರೆಗಳಲ್ಲಿ ಮರಗಳನ್ನು ತೆರವುಗೊಳಿಸಲಾಗುವುದು;	ಕೆರೆಗಳಲ್ಲಿ ನೀರು ತುಂಬಿಸುವ ಕಾರ್ಯವು ಅರಣ್ಯ ಇಲಾಖೆಯ ವ್ಯಾಪ್ತಿಗೊಳಪಡುವುದಿಲ್ಲ. ಕೆರೆಗಳಲ್ಲಿನ ಮರಗಳನ್ನು ತೆರವುಗೊಳಿಸುವ ಕುರಿತು ಮೇಲೆ ವಿವರಿಸಿದಂತೆ ಸಕ್ಷಮ ಪ್ರಾಧಿಕಾರದಿಂದ ಅನುಮತಿ ಪಡೆದ ನಂತರ ಕ್ರಮ ಕೈಗೊಳ್ಳಲಾಗುವುದು.
ಊ)	ಹೆಚ್.ಎನ್.ವ್ಯಾಲಿಯಿಂದ ನೀರನ್ನು ತುಂಬಿಸಲಾಗುತ್ತಿರುವ ಕೆರೆಗಳ ಅಂಚಿನಲ್ಲಿ ಗಿಡಗಳನ್ನು ನೆಡುವ ಉದ್ದೇಶ ಸರ್ಕಾರಕ್ಕಿದೆಯೇ; ಗಿಡಗಳು ಬೆಳೆದ ನಂತರ ಪಕ್ಷಿ ಸಂಕುಲಕ್ಕೆ ಅನುಕೂಲವಾಗಲಿದ್ದು ಕೆರೆಯ ಅಂಚು ನಿಗದಿಗೊಳ್ಳಲಿರುವುದು ಅರಣ್ಯ ಇಲಾಖೆ ಗಮನಕ್ಕೆ ಬಂದಿದೆಯೇ?	ಹೆಚ್.ಎನ್.ವ್ಯಾಲಿಯಿಂದ ನೀರನ್ನು ತುಂಬಿಸಲಾಗುತ್ತಿರುವ ಕೆಲವು ಕೆರೆಗಳ ಅಂಚಿನಲ್ಲಿ ಪ್ರಸಕ್ತ ಸಾಲಿನಲ್ಲಿ ಗಿಡಗಳನ್ನು ನಾಟಿ ಮಾಡಲಾಗಿರುತ್ತದೆ. ಮುಂದಿನ ಸಾಲಿನಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಬಾಕಿ ಉಳಿದಿರುವ ಕೆರೆಗಳ ಅಂಚಿನಲ್ಲಿ ನೆಡುತೋಪು ನಿರ್ಮಾಣ ಮಾಡಲಾಗುವುದು.

ಸಂಖ್ಯೆ: ಅಪಜೀ 51 ಎಫ್‌ಟಿಎಸ್ 2020

(ಆನಂದ್ ಸಿಂಗ್)
ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1359

ಸದಸ್ಯರ ಹೆಸರು : ಶ್ರೀ ರಘುಮೂರ್ತಿ ಟಿ (ಚಳ್ಳಕೆರೆ)

ಉತ್ತರಿಸುವ ದಿನಾಂಕ : 24.09.2020

ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
(ಅ)	ಚಳ್ಳಕೆರೆ ನಗರದಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಪ್ರಾರಂಭ ಮಾಡಲು ಕಟ್ಟಡ ನಿರ್ಮಾಣ ಕಾರ್ಯ (ಮೊದಲ ಹಂತದ) ಪೂರ್ಣಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:	ಬಂದಿದೆ
(ಆ)	ಹಾಗಿದ್ದಲ್ಲಿ, ಎಐಸಿಟಿಇ ಅನುಮೋದನೆ ನೀಡಿದ್ದರೂ ಈವರೆವಿಗೂ ಕಾಲೇಜು ಪ್ರಾರಂಭವಾಗದಿರಲು ಕಾರಣಗಳೇನು;	2019-20 ನೇ ಸಾಲಿನಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಲಭ್ಯವಿದ್ದ 3203 ಸೀಟುಗಳ ಪೈಕಿ 1551 ಸೀಟುಗಳು ಭರ್ತಿಯಾಗಿದ್ದು. ಶೇ. 52 ರಷ್ಟು ಸೀಟುಗಳು ಖಾಲಿ ಉಳಿದಿರುತ್ತದೆ. 2020-21ನೇ ಸಾಲಿನಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಚಳ್ಳಕೆರೆ ಸಂಸ್ಥೆಗೆ ಅವಶ್ಯವಿರುವ ಹುದ್ದೆಗಳ ಸೃಜನೆ ಆಗಿರುವುದಿಲ್ಲ ಹಾಗೂ ಎಐಸಿಟಿಇ, ನವದೆಹಲಿಯವರ ನಿಯಮಾನುಸಾರ ಮೂಲಭೂತ ಸೌಲಭ್ಯ ಒದಗಿಸುವ ಕಾರ್ಯ ಪ್ರಗತಿಯಲ್ಲಿದೆ.
(ಇ)	ಪ್ರಸ್ತುತ ವರ್ಷ ಇಂಜಿನಿಯರಿಂಗ್ ಕಾಲೇಜು ಪ್ರಾರಂಭಿಸಲು ಸರ್ಕಾರವು ಕ್ರಮವಹಿಸುವುದೇ;	ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಚಳ್ಳಕೆರೆ ಸಂಸ್ಥೆಗೆ ಎಐಸಿಟಿಇ, ನವದೆಹಲಿಯವರು ನೀಡಿರುವ ಪ್ರವೇಶಾನುಮೋದನೆಯು 2 ವರ್ಷಗಳ ಕಾರ್ಯಾವಧಿ ಹೊಂದಿದ್ದು, ಅವಶ್ಯವಿರುವ ಹುದ್ದೆಗಳನ್ನು ಸೃಜಿಸಿದ ನಂತರ ಹಾಗೂ ಅಗತ್ಯವಿರುವ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ನಿಯಮಾನುಸಾರ ಕ್ರಮವಹಿಸಲಾಗುತ್ತಿದೆ.
(ಈ)	2ನೇ ಹಂತದ ಕಟ್ಟಡ ನಿರ್ಮಾಣ ಕಾಮಗಾರಿ ಪ್ರಾರಂಭಿಸಲು ಸರ್ಕಾರಕ್ಕೆ ಈಗಾಗಲೇ ಪ್ರಸ್ತಾವನೆ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:	ಬಂದಿದೆ

(ಉ)	ಹಾಗಿದ್ದಲ್ಲಿ 2ನೇ ಹಂತ ಕಾಲೇಜು ಕಟ್ಟಡದ ಕಾಮಗಾರಿ ಪ್ರಾರಂಭಿಸಲು ಅನುಮೋದನೆ ನೀಡಿ ಹಣ ಬಿಡುಗಡೆ ಮಾಡಲು ಸರ್ಕಾರ ಯಾವಾಗ ಕ್ರಮ ವಹಿಸುವುದು? (ವಿವರ ನೀಡುವುದು)	ಪ್ರಸ್ತುತ ಇರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಗೆ ಅತ್ಯಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಆದ್ಯತೆ ನೀಡುತ್ತಿರುವುದರಿಂದ ಹಾಗೂ ಪ್ರಸಕ್ತ ಸಾಲಿನಲ್ಲಿ ಕೋವಿಡ್-19 ಪ್ರಯುಕ್ತ ಆರ್ಥಿಕ ನಿರ್ಬಂಧ ಜಾರಿಯಲ್ಲಿರುವುದರಿಂದ 2ನೇ ಹಂತದ ಕಾಲೇಜು ಕಟ್ಟಡ ಕಾಮಗಾರಿಗಳನ್ನು ತೆಗೆದುಕೊಂಡಿರುವುದಿಲ್ಲ.

ಕಡತ ಸಂಖ್ಯೆ: ಇಡಿ 102 ಹೆಚ್‌ಪಿಟಿ 2020

(ಡಾ: ಅಶ್ವಥ್ ನಾರಾಯಣ ಸಿ.ಎನ್)
ಉಪ ಮುಖ್ಯಮಂತ್ರಿಗಳು ಹಾಗೂ
ಉನ್ನತ ಶಿಕ್ಷಣ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1375
ಸದಸ್ಯರ ಹೆಸರು : ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ್ (ಬೈಲಹೊಂಗಲ)
ಉತ್ತರಿಸುವ ದಿನಾಂಕ : 24-09-2020.
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ಕ್ರಮ ಸಂಖ್ಯೆ	ಪ್ರಶ್ನೆ	ಉತ್ತರ
ಅ)	ಬೆಳಗಾವಿ ಜಿಲ್ಲೆ ಬೈಲಹೊಂಗಲ ಮತಕ್ಷೇತ್ರದಲ್ಲಿ ಬರುವ ಬೈಲಹೊಂಗಲ ತಾಲ್ಲೂಕಿನ ಕೆಂಗಾನೂರ ಹಾಗೂ ಸವದತ್ತಿ ತಾಲ್ಲೂಕಿನ ಹಿರೆಬೂದನೂರ ಗ್ರಾಮದಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಅವಶ್ಯಕತೆ ಇರುವ ಸಂಗತಿ ಸರ್ಕಾರದ ಗಮನದಲ್ಲಿರುವುದೇ;	ಬಂದಿದೆ
ಆ)	ಈಗಾಗಲೇ ಸದರಿ ಗ್ರಾಮಗಳಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಬೇಕೆಂದು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುವ ಸಂಗತಿ ನಿಜವಲ್ಲವೇ;	ಹೌದು
ಇ)	ಹಾಗಿದ್ದಲ್ಲಿ, ಕೂಡಲೇ ಸದರಿ ಗ್ರಾಮಗಳಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದೇ?	ರಾಜ್ಯದ 361 ಸರ್ಕಾರಿ ಪ್ರೌಢ ಶಾಲೆಗಳನ್ನು ಉನ್ನತೀಕರಿಸಿ, ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನಾಗಿ ಉನ್ನತೀಕರಿಸಲು ಪ್ರಸ್ತಾವನೆ ಇದ್ದು, ಅದರಲ್ಲಿ ಬೆಳಗಾವಿ ಜಿಲ್ಲೆ ಸವದತ್ತಿ ತಾಲ್ಲೂಕಿನ ಬೈಲಹೊಂಗಲ, ಮತಕ್ಷೇತ್ರದಲ್ಲಿ ಬರುವ ಕೆಂಗಾನೂರ ಗ್ರಾಮ ಹಾಗೂ ಸವದತ್ತಿ ತಾಲ್ಲೂಕಿನ ಹಿರೇಬೂದನೂರ ಗ್ರಾಮಗಳಲ್ಲಿ ಪ್ರೌಢ ಶಾಲೆಗಳನ್ನು ಉನ್ನತೀಕರಿಸಿ, ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನಾಗಿ ಉನ್ನತೀಕರಿಸಲು ಪ್ರಸ್ತಾವನೆ ಇದ್ದು, ಸದರಿ ಕಾಲೇಜುಗಳನ್ನು ಉನ್ನತೀಕರಿಸಲು ಕೆಳಕಂಡ ಮಾಹಿತಿಗಳನ್ನು ಕ್ರೋಢೀಕರಿಸಲಾಗುತ್ತಿದ್ದು, ಸದರಿ ವಿವರಗಳನ್ನು ಪಡೆದ ನಂತರ ಆರ್ಥಿಕ ಇಲಾಖೆಯ ಸಹಮತಿಗೆ ಕಳುಹಿಸಲು ಕ್ರಮವಹಿಸಲಾಗುವುದು. 1) ಈ ಕಾಲೇಜುಗಳನ್ನು ಉನ್ನತೀಕರಿಸುವ ಬಗ್ಗೆ ಮಾನದಂಡಗಳು; 2) ಉನ್ನತೀಕರಿಸುವಂತಹ ಪ್ರದೇಶಗಳಲ್ಲಿ ಎಸ್.ಎಸ್.ಎಲ್.ಸಿ. ಯಿಂದ ಪದವಿ ಪೂರ್ವ ಶಿಕ್ಷಣಕ್ಕೆ ಬರುವ ವಿದ್ಯಾರ್ಥಿಗಳ ಪ್ರತಿಶತ(Average) ವಿವರಗಳು; 3) ಕೆ.ಪಿ.ಶಾಲೆಗಳಡಿ ಈ ಕಾಲೇಜುಗಳನ್ನು ಉನ್ನತೀಕರಿಸಲು ಇರುವ ಅವಕಾಶದ ಬಗ್ಗೆ ಮಾಹಿತಿ;

		4) ಪದವಿ ಪೂರ್ವ ಕಾಲೇಜಿನಲ್ಲಿ ವಿದ್ಯಾರ್ಥಿಗಳ ಗರಿಷ್ಠ/ಕನಿಷ್ಠ ಸಂಖ್ಯೆಯ ವಿವರ; 5) ಉಪನ್ಯಾಸಕರ ವಿವರಗಳ ಬಗ್ಗೆ ಸ್ಪಷ್ಟ ಸಂಖ್ಯೆಯ/ಮೊತ್ತದ ಮಾಹಿತಿ;

ಸಂಖ್ಯೆ: ಇಡಿ 128 ಡಿಜಿಡಬ್ಲ್ಯೂ 2020

(ಎಸ್.ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು.

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1378
ಸದಸ್ಯರ ಹೆಸರು	:	ಶ್ರೀಮತಿ ಕನೀಜ್ ಫಾತೀಮಾ (ಗುಲ್ಬರ್ಗಾ ಉತ್ತರ)
ಉತ್ತರಿಸಬೇಕಾದ ದಿನಾಂಕ	:	24.09.2020
ಉತ್ತರಿಸುವ ಸಚಿವರು	:	ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು

ಕ್ರಸ	ಪ್ರಶ್ನೆ	ಉತ್ತರ
ಅ)	2019-20ನೇ ಸಾಲಿನಲ್ಲಿ ಉಂಟಾದ ಭೀಕರ ಅತಿವೃಷ್ಟಿಯಿಂದ ಹಲವಾರು ಸ್ಥಳಗಳಲ್ಲಿ ಶಾಲಾ ಕೊಠಡಿಗಳು ತೀವ್ರವಾಗಿ ಹಾನಿಗೊಳಗಾಗಿದ್ದು, ಈ ಹಿನ್ನೆಲೆಯಲ್ಲಿ 26 ಜಿಲ್ಲೆಗಳ 3386 ಸರ್ಕಾರಿ ಶಾಲೆಗಳ 6469 ಶಾಲಾ ಕೊಠಡಿಗಳ ಕಾಮಗಾರಿಯನ್ನು ನಬಾರ್ಡ್ ಸಹಯೋಗದೊಂದಿಗೆ 758 ಕೋಟಿ ರೂ.ಗಳ ವೆಚ್ಚದಲ್ಲಿ ಕೈಗೊಳ್ಳಲಾಗುವುದೆಂದು 2020-21ನೇ ಸಾಲಿನ ಆಯವ್ಯಯದಲ್ಲಿ ಮಂಡಿಸಿದ್ದು, <u>ಈಗ ಪ್ರಸ್ತುತ ಎಷ್ಟು ಶಾಲಾ ಕೊಠಡಿಗಳ ಕಾಮಗಾರಿ ಪೂರ್ಣಗೊಂಡಿದೆ(ವಿವರ ನೀಡುವುದು)</u>	2019-20ನೇ ಸಾಲಿಗೆ, ರಾಜ್ಯದ ಅಧಿಕ ಮಳೆಯಿಂದ ಹಾನಿಗೊಳಗಾದ ದುರಸ್ಥಿ ಮಾಡಲು ಸಾಧ್ಯವಾಗದ ಪುನರ್ ನಿರ್ಮಾಣ ಮಾಡಬೇಕಾದ 3386 ಶಾಲೆಗಳ 6469 ಕೊಠಡಿಗಳನ್ನು ನಬಾರ್ಡ್ ಸಹಯೋಗದೊಂದಿಗೆ ಆರ್.ಐ.ಡಿ.ಎಫ್-25 ಯೋಜನೆಯಡಿ ಪುನರ್ ನಿರ್ಮಾಣಕ್ಕಾಗಿ ರೂ.75807.30 ಲಕ್ಷಗಳಿಗೆ, ಸರ್ಕಾರದ ಆದೇಶ ಸಂಖ್ಯೆ ಇಪಿ 120 ಯೋಸಕ 2019 ದಿನಾಂಕ:18.02.2020ರಲ್ಲಿ ಮಂಜೂರಾತಿ ಆದೇಶ ನೀಡಲಾಗಿದೆ. 1) ಈ ಪೈಕಿ 22 ಜಿಲ್ಲೆಗಳಿಂದ 197 ಶಾಲೆಗಳಲ್ಲಿ 326 ಕೊಠಡಿಗಳು ಬೇರೆ ಯೋಜನೆಯಡಿ ಮಂಜೂರಾಗಿರುತ್ತದೆ, ಅದುದರಿಂದ ಸದರಿ ಶಾಲೆಗಳಲ್ಲಿ ಕೊಠಡಿಗಳ ಮರು ನಿರ್ಮಾಣದ ಅಗತ್ಯವಿರುವುದಿಲ್ಲ. 2) 3243 ಶಾಲೆಗಳ 6143 ಕೊಠಡಿಗಳಿಗೆ ರೂ.71865.00 ಲಕ್ಷಗಳ ಕಾಮಗಾರಿಗಳನ್ನು ಲೋಕೋಪಯೋಗಿ ಇಲಾಖೆ ಮೂಲಕ ಅನುಷ್ಠಾನಗೊಳಿಸಲು ಆಡಳಿತಾತ್ಮಕ ಮಂಜೂರಾತಿ ನೀಡಲಾಗಿದೆ. ಕೊಠಡಿಗಳ ಮರು ನಿರ್ಮಾಣಕ್ಕೆ ಆಡಳಿತಾತ್ಮಕ ಮಂಜೂರಾತಿ ನೀಡಲಾದ **3243** ಶಾಲಾ ಕಟ್ಟಡ ಕಾಮಗಾರಿಗಳ ಪೈಕಿ **2754** ಶಾಲಾ ಕಟ್ಟಡ ಕಾಮಗಾರಿಗಳು ವಿವಿಧ ಹಂತಗಳಲ್ಲಿ ಪ್ರಗತಿಯಲ್ಲಿರುತ್ತದೆ. 5 ಶಾಲೆಗಳ ಕಾಮಗಾರಿ ಪೂರ್ಣಗೊಂಡಿರುತ್ತದೆ. ಉಳಿದ **484** ಶಾಲಾ ಕಟ್ಟಡ ಕಾಮಗಾರಿಗಳನ್ನು ಇನ್ನಷ್ಟೇ ಪ್ರಾರಂಭಿಸಬೇಕಾಗಿರುತ್ತದೆ. 3) 2020-21ನೇ ಸಾಲಿನ ಪ್ರಥಮ ತ್ರೈಮಾಸಿಕವಾಗಿ ರೂ.125.00 ಕೋಟಿ ಅನುದಾನವನ್ನು ಲೋಕೋಪಯೋಗಿ ಇಲಾಖೆಗೆ ಠೇವಣಿ ವಂತಿಗೆ ಇರಿಸಲಾಗಿದ್ದು, ಇದರಲ್ಲಿ 5 ಶಾಲೆಗಳ 6 ಕೊಠಡಿಗಳ ಕಾಮಗಾರಿ ಪೂರ್ಣಗೊಂಡಿದ್ದು, ಇದಕ್ಕೆ ರೂ.71.00ಲಕ್ಷಗಳ ವೆಚ್ಚವನ್ನು ಭರಿಸಲಾಗಿದೆ.

		ಪೂರ್ಣಗೊಂಡಿರುವ ಕಾಮಗಾರಿ ವಿವರಗಳು ಈ ಕೆಳಕಂಡಂತಿವೆ. <table><tr><th>ಕ್ರ ಸಂ.</th><th>ಜಿಲ್ಲೆಯ ಹೆಸರು</th><th>ತಾಲ್ಲೂಕು</th><th>ಶಾಲೆಯ ಹೆಸರು& ವಿಳಾಸ</th><th>ಕೊಠಡಿಗಳ ಸಂಖ್ಯೆ</th><th>ಮೊತ್ತ (ಲಕ್ಷಗಳಲ್ಲಿ)</th></tr><tr><td>1</td><td>ಕಲ್ಬುರ್ಗಿ</td><td>ಚಿಂಚೋಳಿ</td><td>ಸ.ಹಿ.ಪ್ರಾ. ಶಾಲೆ ಹುಡದಳ್ಳಿ</td><td>02</td><td>24.00</td></tr><tr><td>2</td><td>ಕಲ್ಬುರ್ಗಿ</td><td>ಚಿಂಚೋಳಿ</td><td>ಸ.ಕಿ.ಪ್ರಾ. ಶಾಲೆ ಜಿಲವರ್ಷ ತಾಂಡ</td><td>01</td><td>12.00</td></tr><tr><td>3</td><td>ರಾಯಚೂರು</td><td>ಸಿಂದನೂರು</td><td>ಸ.ಹಿ.ಪ್ರಾ. ಶಾಲೆ ನಂಜಲದಿನ್ನಿ</td><td>01</td><td>12.00</td></tr><tr><td>4</td><td>ರಾಯಚೂರು</td><td>ಸಿಂದನೂರು</td><td>ಸ.ಹಿ.ಪ್ರಾ. ಶಾಲೆ ಯಾಪಲಪರ್ವಿ</td><td>01</td><td>12.00</td></tr><tr><td>5</td><td>ಮಂಡ್ಯ</td><td>ಮಂಡ್ಯ ಉತ್ತರ</td><td>ಸ.ಹಿ.ಪ್ರಾ. ಶಾಲೆ ಹುಲಿಕೆರೆ</td><td>01</td><td>11.00</td></tr></table>
ಆ)	ಸದರಿ ಕಾಮಗಾರಿಗೆ ಖರ್ಚಾಗುತ್ತಿರುವ ವೆಚ್ಚವೆಷ್ಟು?	ಸದರಿ ಕಾಮಗಾರಿಗಳಿಗೆ ಒಟ್ಟು ವೆಚ್ಚ ರೂ.71865.00 ಲಕ್ಷಗಳು.
ಇ)	ಒಂದು ವೇಳೆ ಕಾಮಗಾರಿ ಇನ್ನೂ ಪ್ರಾರಂಭಿಸದೇ ಇದ್ದಲ್ಲಿ ವಿಳಂಬಕ್ಕೆ ಕಾರಣಗಳೇನು?	ನಿವೇಶನ ಸಮಸ್ಯೆ, ಟೆಂಡರ್ ಪ್ರಕ್ರಿಯೆಯ ತಾಂತ್ರಿಕ ಕಾರಣಗಳು, ಇತ್ಯಾದಿ ಕಾರಣಗಳಿಂದ ಶಾಲಾ ಕಟ್ಟಡ ಕಾಮಗಾರಿಗಳು ವಿಳಂಬವಾಗಿರುತ್ತವೆ.
ಈ)	ಸದರಿ ಕಾಮಗಾರಿಗಳನ್ನು ಯಾವಾಗ ಪೂರ್ಣಗೊಳಿಸಲಾಗುವುದು? (ಸಂಪೂರ್ಣ ವಿವರಗಳು ನೀಡುವುದು)	ಸದರಿ ಕಾಮಗಾರಿಗಳನ್ನು 2020-21 ಸಾಲಿನ ಅಂತ್ಯದೊಳಗೆ ಪೂರ್ಣಗೊಳಿಸಲು ಕ್ರಮವಹಿಸಲಾಗುತ್ತಿದೆ.

ಇಪಿ 180 ಯೋಸಕ 2020

(ಎಸ್.ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1379
ಮಾನ್ಯ ಸದಸ್ಯರ ಹೆಸರು	ಶ್ರೀ ರಾಜೇಗೌಡ.ಟಿ.ಡಿ (ಶೃಂಗೇರಿ)
ಉತ್ತರಿಸಬೇಕಾದ ದಿನಾಂಕ	24-09-2020
ಉತ್ತರಿಸುವ ಸಚಿವರು	ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ.ಸಂ.	ಪ್ರಶ್ನೆ	ಉತ್ತರ
ಅ	ಚಿಕ್ಕಮಗಳೂರು ಜಿಲ್ಲೆ, ಕೊಪ್ಪ ತಾಲ್ಲೂಕು, ಜಯಪುರ, ಮೇಗುಂದಾ ಹೋಬಳಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಹಾಗೂ ಎಸ್ಟೇಟ್ ಕಾರ್ಮಿಕರು ಹೆಚ್ಚಿರುವುದರಿಂದ ಜಯಪುರ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು (PHC) ಸಮುದಾಯ ಆರೋಗ್ಯ ಕೇಂದ್ರವನ್ನಾಗಿ (CHC) ಪರಿವರ್ತಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;	ಇಲ್ಲ.
ಆ	ಮೇಗುಂದವು ದೊಡ್ಡ ಹೋಬಳಿಯಾಗಿರುವುದರಿಂದ ಹಾಗೂ ತಾಲ್ಲೂಕು ಆಸ್ಪತ್ರೆ ದೂರ ಇರುವುದರಿಂದ ಜಯಪುರ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು (PHC) ಸಮುದಾಯ ಆರೋಗ್ಯ ಕೇಂದ್ರವನ್ನಾಗಿ (CHC) ಪರಿವರ್ತಿಸಿದ್ದಲ್ಲಿ ಬೇಕಾಗಿರುವ ಹೆಚ್ಚುವರಿ ಅನುದಾನವೆಷ್ಟು;	ಉದ್ಭವಿಸುವುದಿಲ್ಲ.
ಇ	ಸಮುದಾಯ ಆರೋಗ್ಯ ಕೇಂದ್ರಕ್ಕೆ (CHC) ಲಭಿಸುವ ಸವಲತ್ತುಗಳಾವುವು;	1. ವೈದ್ಯಕೀಯ ಸೇವೆಗಳು (ಹೊರರೋಗಿಗಳ ತಪಾಸಣೆ ಹಾಗೂ ಚಿಕಿತ್ಸೆ ನೀಡಲಾಗುವುದು) 2. ತಾಯಿ ಮತ್ತು ಮಕ್ಕಳ ಆರೋಗ್ಯ ಹಾಗೂ ಕುಟುಂಬ ಕಲ್ಯಾಣ ಯೋಜನೆ. 3. ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಹಾಗೂ ಶುಚಿತ್ವದ ಬಗ್ಗೆ ತಿಳುವಳಿಕೆ ನೀಡಲಾಗುವುದು. 4. ಸ್ಥಳೀಯವಾಗಿ ನೀರಿನಿಂದ ಹರಡುವ ಖಾಯಿಲೆಗಳನ್ನು ತಡೆಯುವುದು. 5. ಜನನ ಮತ್ತು ಮರಣದ ಬಗ್ಗೆ ದಾಖಲೆಗಳನ್ನು ಮೇಲಾಧಿಕಾರಿಗಳಿಗೆ ಸಲ್ಲಿಸುವುದು. 6. ಆರೋಗ್ಯ ಶಿಕ್ಷಣ ನೀಡುವುದು. 7. ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ನಿರ್ವಹಣೆ ಮಾಡುವುದು. 8. ಮೇಲ್ಮಟ್ಟದ ಆಸ್ಪತ್ರೆಗೆ ರೋಗಿಗಳನ್ನು ಹೆಚ್ಚಿನ ಚಿಕಿತ್ಸೆಗಾಗಿ ಕಳುಹಿಸಲಾಗುವುದು. 9. ಎಲ್ಲಾ ಆರೋಗ್ಯ ಕಾರ್ಯಕರ್ತರಿಗೆ ಸೂಕ್ತ ತರಬೇತಿ ನೀಡಲಾಗುವುದು.

		10. ಪ್ರಯೋಗಾಲಯದ ವ್ಯವಸ್ಥೆ. 11. ಈ ಮೇಲ್ಕಾಣಿಸಿದ ಸೌಲಭ್ಯಗಳ ಜೊತೆಗೆ ಸೂಕ್ತ ತಜ್ಞ ವೈದ್ಯರ ಸೌಲಭ್ಯವನ್ನು ಒದಗಿಸಲಾಗುವುದು (ಫಿಜಿಷಿಯನ್, ಶಸ್ತ್ರಚಿಕಿತ್ಸಕರು, ಅರವಳಿಕೆ ತಜ್ಞರು, ಪ್ರಸೂತಿ ತಜ್ಞರು, ಮಕ್ಕಳ ತಜ್ಞರು, ದಂತ ವೈದ್ಯರು) ಒಳ ರೋಗಿಗಳಿಗೆ ತಜ್ಞತೆಗೆ ಅನುಸಾರವಾಗಿ ಸೂಕ್ತ ಚಿಕಿತ್ಸೆ ನೀಡಲಾಗುವುದು.
ಈ	ಶೃಂಗೇರಿ ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು ಎಷ್ಟು ಸಮುದಾಯ ಆರೋಗ್ಯ ಕೇಂದ್ರಗಳಿವೆ; (CHC) (ವಿವರ ನೀಡುವುದು)	ಶೃಂಗೇರಿ ವಿಧಾನಸಭಾ ಕ್ಷೇತ್ರದಲ್ಲಿ ಯಾವುದೇ ಸಮುದಾಯ ಆರೋಗ್ಯ ಕೇಂದ್ರಗಳಿರುವುದಿಲ್ಲ.
ಉ	ಜಯಪುರ ಆಸ್ಪತ್ರೆಯಲ್ಲಿ ಮಹಿಳಾ ವೈದ್ಯಾಧಿಕಾರಿ ಇಲ್ಲದೇ ಮಹಿಳಾ ರೋಗಿಗಳಿಗೆ ಸಮಸ್ಯೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಮಹಿಳಾ ಡಾಕ್ಟರ್‌ರನ್ನು ಯಾವ ಕಾಲಮಿತಿಯೊಳಗೆ ನೇಮಕ ಮಾಡಲಾಗುತ್ತದೆ?	ಬಂದಿಲ್ಲ. ಕಾರ್ಯನಿರತ ಪುರುಷ ವೈದ್ಯಾಧಿಕಾರಿಗಳಿಂದ ಮಹಿಳಾ ರೋಗಿಗಳಿಗೆ ತೊಂದರೆಯಾಗದಂತೆ ಚಿಕಿತ್ಸೆ ನೀಡಲಾಗುತ್ತಿದೆ. ಜಯಪುರ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಒಂದು ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ ಹುದ್ದೆ ಮಂಜೂರಾಗಿದ್ದು, ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಆದರೆ ಮಹಿಳಾ ವೈದ್ಯಾಧಿಕಾರಿ ಹುದ್ದೆ ಮಂಜೂರಾಗಿರುವುದಿಲ್ಲ

ಆಕುಕ 109 ಎಸ್‌ಬಿವಿ 2020

(ಬಿ. ಶ್ರೀರಾಮುಲು)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ, 7ನೇ ಅಧಿವೇಶನ)

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1384

2) ಸದಸ್ಯರ ಹೆಸರು : ಶ್ರೀ ನಿರಂಜನ್ ಕುಮಾರ್ ಸಿ.ಎಸ್. (ಗುಂಡ್ಲುಪೇಟೆ)

3) ಉತ್ತರಿಸುವ ದಿನಾಂಕ : 24–09–2020

4) ಉತ್ತರಿಸುವವರು : ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು

ಕ್ರ ಸಂ	ಪ್ರಶ್ನೆ	ಉತ್ತರ
ಅ)	ಚಾಮರಾಜನಗರ ಜಿಲ್ಲೆ, ಗುಂಡ್ಲುಪೇಟೆ ವ್ಯಾಪ್ತಿಯಲ್ಲಿ ಬರುವ ಅರಣ್ಯ ವಲಯಗಳಡಿಯಲ್ಲಿ ಕಳೆದ 03 ವರ್ಷಗಳಿಂದ ದಾಖಲಾದ ವನ್ಯಜೀವಿ ಸಂಘರ್ಷ, ಮಾನವ ಹಾನಿ ಬೆಳೆಹಾನಿಗಳ ಸಂಖ್ಯೆ ಎಷ್ಟು; ಸದರಿ ಪ್ರಕರಣಗಳಿಗೆ ಸರ್ಕಾರದಿಂದ ಪರಿಹಾರ ನೀಡಲಾಗಿದೆಯೇ; (ವಿವರ ನೀಡಿ)	ಚಾಮರಾಜನಗರ ಜಿಲ್ಲೆ, ಗುಂಡ್ಲುಪೇಟೆ ತಾಲ್ಲೂಕು ವ್ಯಾಪ್ತಿಯಲ್ಲಿ ವನ್ಯಪ್ರಾಣಿಗಳ ಹಾವಳಿಯಿಂದ ಉಂಟಾಗಿರುವ ಮಾನವ–ಪ್ರಾಣಹಾನಿ ಹಾಗೂ ಬೆಳೆಹಾನಿ ಪ್ರಕರಣಗಳಿಗೆ ಸಂಬಂಧಿಸಿದಂತೆ ಕಳೆದ ಮೂರು (03) ವರ್ಷಗಳಲ್ಲಿ ಪಾವತಿಸಿದ ದಯಾತ್ಮಕ ಧನದ ವಿವರ ಈ ಕೆಳಕಂಡತಿಗೆ.

ಕ್ರ ಸಂ.	ವಿವರ	2017–18		2018–19		2019–20	
		ಪ್ರಕರಣ	ದಯಾತ್ಮಕಧನ	ಪ್ರಕರಣ	ದಯಾತ್ಮಕಧನ	ಪ್ರಕರಣ	ದಯಾತ್ಮಕಧನ
1	ಬೆಳೆ ನಷ್ಟ	947	2860069.00	1648	5655378.00	2420	8219065.00
2	ಜಾನುವಾರು ಹತ್ಯೆ	140	756550.00	98	607500.00	160	1150250.00
3	ಮಾನವಗಾಯ	9	234880.00	6	72681.00	9	761728.00
4	ಮಾನವ ಪ್ರಾಣಹಾನಿ	0	0.00	1	500000.00	3	1500000.00
5	ಆಸ್ತಿನಷ್ಟ	0	0.00	2	17200.00	12	100500.00
	ಒಟ್ಟು	**1096**	**3851499.00**	**1755**	**6852759.00**	**2604**	**11731543.00**

ಕ್ರ ಸಂ	ಪ್ರಶ್ನೆ	ಉತ್ತರ
ಆ)	ಗುಂಡ್ಲುಪೇಟೆ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ವನ್ಯಜೀವಿ ಹಾಗೂ ಪ್ರಾದೇಶಿಕ ಅರಣ್ಯ ವಲಯಗಳು ಯಾವುವು;	ಗುಂಡ್ಲುಪೇಟೆ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಗೆ ಬರುವ ವನ್ಯಜೀವಿ ವಲಯಗಳ ವಿವರ ಈ ಕೆಳಕಂಡತ್ತಿದೆ.

ಕ್ರ.ಸಂ	ವಲಯ
1	ಬಂಡೀಪುರ ವಲಯ
2	ಕುಂದುಕೆರೆ ವಲಯ
3	ಜಿ.ಎಸ್.ಬೆಟ್ಟ ವಲಯ
4	ಗುಂಡ್ಲುಪೇಟೆ ಬಫರ್‌ವಲಯ
5	ಮದ್ದೂರು ವಲಯ
6	ಮೂಲೆಹೊಳೆ ವಲಯ
7	ಓಂಕಾರ ವನ್ಯಜೀವಿ ವಲಯ

<table>
<tr><th>ಕ್ರ ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಇ)</td><td>ಸದರಿ ವ್ಯಾಪ್ತಿಯ ಕಾಡಂಚಿನ ವನ್ಯಜೀವಿ ಹಾವಳಿ ತಡೆಗೆ ನಿರ್ಮಿಸಲಾಗಿರುವ ರೈಲ್ವೆ ಹಳಿ ಹಾಗೂ ಸೋಲಾರ್ ಬೇಲಿಗಳ ಉದ್ದ ಎಷ್ಟು; ಪೂರ್ಣಗೊಳಿಸಲು/ಅಳವಡಿಸಲು ಬೇಕಾದ ಉಳಿಕೆ ಬೇಲಿಗಳ ಉದ್ದ ಎಷ್ಟು; (ವಲಯವಾರು ಮಾಹಿತಿ ನೀಡಿ)</td><td>ಗುಂಡ್ಲುಪೇಟೆ ತಾಲ್ಲೂಕು ವ್ಯಾಪ್ತಿಯ ಕಾಡಂಚಿನ ವನ್ಯಜೀವಿ ಹಾವಳಿ ತಡೆಗೆ ನಿರ್ಮಿಸಿರುವ / ನಿರ್ಮಾಣ ಮಾಡಬೇಕಿರುವ ರೈಲ್ವೆಹಳಿ ಮತ್ತು ಟೆಂಟಕಲ್ ಸೋಲಾರ್ ಬೇಲಿಗಳ ವಲಯವಾರು ವಿವರ ಈ ಕೆಳಕಂಡಂತಿದೆ.
<table>
<tr><th rowspan="2">ಕ್ರ ಸಂ.</th><th rowspan="2">ವಲಯ</th><th colspan="2">ರೈಲ್ವೆ ಬ್ಯಾರಿಕೇಡ್ (ಕಿ.ಮೀಗಳಲ್ಲಿ)</th><th colspan="2">ಟೆಂಟಕಲ್ ಸೋಲಾರ್‌ತಂತಿಬೇಲಿ (ಕಿ.ಮೀಗಳಲ್ಲಿ)</th></tr>
<tr><th>ನಿರ್ಮಾಣ</th><th>ನಿರ್ಮಾಣ ಮಾಡ ಬೇಕಿರುವ</th><th>ನಿರ್ಮಾಣ</th><th>ನಿರ್ಮಾಣ ಮಾಡ ಬೇಕಿರುವ</th></tr>
<tr><td>1</td><td>ಜಿ.ಎಸ್.ಬೆಟ್ಟ</td><td>0.775</td><td>1.70</td><td>20.50</td><td>3.00</td></tr>
<tr><td>2</td><td>ಮದ್ದೂರು</td><td>0.440</td><td>1.95</td><td>–</td><td>–</td></tr>
<tr><td>3</td><td>ಓಂಕಾರ</td><td>13.21</td><td>–</td><td>–</td><td>–</td></tr>
<tr><td>4</td><td>ಕುಂದುಕೆರೆ</td><td>–</td><td>6.058</td><td>11.20</td><td>3.00</td></tr>
<tr><td></td><td>ಒಟ್ಟು:</td><td>14.425</td><td>9.708</td><td>31.70</td><td>6.00</td></tr>
</table></td></tr>
<tr><td>ಈ)</td><td>ವನ್ಯಜೀವಿ ಸಂಘರ್ಷ ತಪ್ಪಿಸಲು ಸರ್ಕಾರದ ವತಿಯಿಂದ ಕೈಗೊಂಡಿರುವ ಕ್ರಮಗಳೇನು?</td><td>ಬಂಡೀಪುರ ವಿಭಾಗದ ವ್ಯಾಪ್ತಿಯಲ್ಲಿ ಮಾನವ–ವನ್ಯಜೀವಿ ಸಂಘರ್ಷ ತಪ್ಪಿಸಲು ಈ ಕೆಳಕಂಡಂತೆ ಕ್ರಮ ಕೈಗೊಳ್ಳಲಾಗಿದೆ.
• ವನ್ಯಪ್ರಾಣಿಗಳು ಅರಣ್ಯ ಪ್ರದೇಶದಿಂದ ವ್ಯವಸಾಯದ ಜಮೀನಿಗೆ ಪ್ರವೇಶಿಸದಂತೆ ಗಡಿ ರೇಖೆಯಲ್ಲಿ ಹಾಲಿ ಇರುವ ಸೋಲಾರ್ ತಂತಿ ಬೇಲಿಯನ್ನು ನಿರ್ವಹಣೆ ಮಾಡಲಾಗುತ್ತಿರುತ್ತದೆ.
• ರೈಲ್ವೆ ಹಳಿಗಳನ್ನು ಉಪಯೋಗಿಸಿ ಬ್ಯಾರಿಕೇಡ್ ನಿರ್ಮಾಣ.
• ಗಡಿರೇಖೆಯಲ್ಲಿ ಹಾಲಿ ಇರುವ ಆನೆ ತಡೆ ಕಂದಕಗಳ ಉನ್ನತೀಕರಣಕ್ಕೆ ಕ್ರಮಕೈಗೊಳ್ಳಲಾಗಿದೆ.
• ಆನೆ ಹಿಮ್ಮೆಟ್ಟಿಸುವ ಕಾವಲುಗಾರರನ್ನು ನಿಯೋಜಿಸಿಕೊಂಡು ಕಾಡಾನೆಗಳು ರೈತರ ಜಮೀನು ಪ್ರವೇಶಿಸದಂತೆ ಕ್ರಮ ಕೈಗೊಳ್ಳಲಾಗಿದೆ
• ಸಿಬ್ಬಂದಿಗಳು ನಿಯಮಾನುಸಾರ ಅರಣ್ಯ ಗಡಿ ರೇಖೆಯಲ್ಲಿ ರಾತ್ರಿ–ಹಗಲು ಗಸ್ತು ಕಾರ್ಯ ನಿರ್ವಹಿಸುವಂತೆ ಕ್ರಮ ಕೈಗೊಳ್ಳಲಾಗಿದೆ.</td></tr>
</table>

ಸಂಖ್ಯೆ: ಅಪಜೀ 152 ಎಫ್‌ಡಬ್ಲ್ಯೂಎಲ್ 2020

(ಆನಂದ್ ಸಿಂಗ್)
ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1390

ಮಾನ್ಯ ಸದಸ್ಯರ ಹೆಸರು : ಶ್ರೀ ಪರಮೇಶ್ವರ ನಾಯಕ್ .ಪಿ.ಟಿ(ಹಡಗಲಿ)

ಉತ್ತರಿಸುವ ದಿನಾಂಕ : 24.09.2020

ಉತ್ತರಿಸುವ ಸಚಿವರ : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು.

ಕ್ರ.ಸಂ.	ಪ್ರಶ್ನೆ	ಉತ್ತರ
ಅ	ಕರೋನ ಸೋಂಕಿನ ಲಾಕ್‌ಡೌನ್‌ನಿಂದ ಆರ್ಥಿಕ ಸಂಕಷ್ಟದ ಅತಂತ್ರದಲ್ಲಿರುವ ರಾಜ್ಯದ ಖಾಸಗಿ ಶಾಲೆಯ ಅತಿಥಿ ಶಿಕ್ಷಕರಿಗೆ ಕೋವಿಡ್–19 ವಿಶೇಷ ಪ್ಯಾಕೇಜ್ ಹಾಗೂ ಉದ್ಯೋಗ ಭದ್ರತೆ ನೀಡಲು ಸರ್ಕಾರಕ್ಕೆ ಪ್ರಸ್ತಾವನೆ ಇದೆಯೇ;	ಇಲ್ಲ.
ಆ	ಇದ್ದಲ್ಲಿ ಸರ್ಕಾರ ಈ ವಿಷಯಕ್ಕೆ ಸಂಬಂಧಪಟ್ಟಂತೆ ತೆಗೆದುಕೊಂಡಿರುವ ಕ್ರಮಗಳೇನು;(ಮಾಹಿತಿ ಒದಗಿಸುವುದು)	ಖಾಸಗಿ ಶಾಲೆಯ ಶಿಕ್ಷಕರಿಗೆ ವೇತನ ಮತ್ತು ಇತರೆ ಸೇವಾ ಸೌಲಭ್ಯಗಳನ್ನು ಆಡಳಿತ ಮಂಡಳಿಗಳೇ ನೀಡಬೇಕಾಗುವುದರಿಂದ ಇದಕ್ಕೆ ಅನುಕೂಲ ಮಾಡುವ ದೃಷ್ಟಿಯಿಂದ ಶಾಲೆಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿ ಮಾಡಿಕೊಳ್ಳಲು ಹಾಗೂ ಮೊದಲ ಅವಧಿಯ ಶುಲ್ಕಗಳನ್ನು ಸಂಗ್ರಹಿಸಲು ಅವಕಾಶ ಕಲ್ಪಿಸಿಕೊಡಲಾಗಿದೆ.ಸಂಗ್ರಹಿತ ಶುಲ್ಕ ಮೊತ್ತವನ್ನು ಪ್ರಥಮ ಆದ್ಯತೆಯ ಮೇಲೆ ಶಿಕ್ಷಕರಿಗೆ ಪಾವತಿ ಮಾಡಲು ತಿಳಿಸಲಾಗಿದೆ.
ಇ	2020–21 ನೇ ಸಾಲಿನಲ್ಲಿ ಕರೋನಾ–19 ಸೋಂಕಿನಿಂದ ಕಳೆದ ಐದು ತಿಂಗಳಿನಿಂದ ಶಾಲೆಗಳು ತೆರೆಯದೆ ಮಕ್ಕಳ ವಿದ್ಯಭ್ಯಾಸದಿಂದ ವಂಚಿತರಾಗಿದ್ದು ಇದನ್ನು ಸರಿದೂಗಿಸಲು ಸರ್ಕಾರ ಯಾವ ಕ್ರಮ ತೆಗೆದುಕೊಂಡಿದೆ?	1.ಶಾಲೆಗಳು ಎಲ್.ಕೆ.ಜಿ ಯಿಂದ 10ನೇ ತರಗತಿವರೆಗೆ ಆನ್ ಲೈನ್ ಶಿಕ್ಷಣ ನೀಡುವ ಬಗ್ಗೆ ಸಿಮೀತ ಅವಧಿಗೆ ಅನುಸಾರ ಕೆಲವು ವಿಧಾನಗಳನ್ನು ಅನುಸರಿಸಲು ಸರ್ಕಾರದ ಆದೇಶ ಸಂ: ಇಪಿ139ಪಿಜಿಸಿ2020, ದಿ:27/6/2020ರಲ್ಲಿ ಮಾರ್ಗಸೂಚಿಗಳನ್ನು ನೀಡಿ ಮಕ್ಕಳು ವಿದ್ಯಾಭ್ಯಾಸದಿಂದ ವಂಚಿತರಾಗುದವುದನ್ನು ಸರಿದೂಗಿಸಲು ಕ್ರಮಕೈಗೊಂಡಿದೆ. • ಆನ್‌ಲೈನ್ ಶಿಕ್ಷಣಕ್ಕೆ ಅಗತ್ಯವಾದ ತಾಂತ್ರಿಕ ಪರಿಕರಗಳನ್ನು ಹೊಂದಿರುವ ವಿದ್ಯಾರ್ಥಿಗಳ ಮಾಹಿತಿಯನ್ನು ಸಂಗ್ರಹಿಸಲಾಗಿದೆ. ಆ ಮೂಲಕ ತಾಂತ್ರಿಕ ಪರಿಕರಗಳನ್ನು ಹೊಂದಿರುವ ವಿದ್ಯಾರ್ಥಿಗಳೊಂದಿಗೆ ಸಮೀಪದ ವಿದ್ಯಾರ್ಥಿಗಳು ಜೊತೆಗೂಡಿಸಿ ಕಲಿಕೆಗೆ ಪ್ರೋತ್ಸಾಹಿಸಲಾಗಿದೆ. • ಸಾಧ್ಯವಾದಲ್ಲಿ ತಾಂತ್ರಿಕ ಪರಿಕರಗಳನ್ನು ಅವರ ಮಕ್ಕಳಿಗೆ ಒದಗಿಸಲು ಪೋಷಕರಿಗೆ ಶೈಕ್ಷಣಿಕ ದೃಷ್ಟಿಯಿಂದ ವಿನಂತಿಸಿದೆ.

- ಗ್ರಾಮಪಂಚಾಯಿತಿಗಳನ್ನು ಅದರ ವ್ಯಾಪ್ತಿಯ ಶಾಲೆಗೆ ಒಂದು ದೊಡ್ಡ ಪರದೆ ಎಲ್.ಸಿ.ಡಿ ಪ್ರೊಜೆಕ್ಟರ್, ಗಣಕಯಂತ್ರ ಮತ್ತು ಅಂತರಜಾಲ ಸೌಲಭ್ಯ ಒದಗಿಸಲು ಕೋರಲಾಗಿದೆ.
- ಈ ಸಂಬಂಧ ಸಮಾಜ ಸೇವಕರು, ಸರ್ಕಾರೇತರ ಸಂಘ ಸಂಸ್ಥೆ(ಎನ್.ಜಿ.ಒ) ಗಳಿಂದ ತಾಂತ್ರಿಕ ಮತ್ತು ಬೌದ್ಧಿಕ ಸಹಾಯಗಳನ್ನು ಒದಗಿಸಲು ಸರ್ಕಾರ ವಿನಂತಿಸಿದೆ.

2. ಆನ್‌ಲೈನ್ ಶಿಕ್ಷಣದ ಮಿತಿಗಳನ್ನು ಗಮನದಲ್ಲಿರಿಸಿಕೊಂಡು **'ವಿದ್ಯಾಗಮ'** ಎಂಬ ಕಲಿಕಾ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗಿದೆ. ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆ ವತಿಯಿಂದ ಅನುಷ್ಠಾನಗೊಳಿಸಿರುವ **'ಸಂವೇದನ'** ವಿಡೀಯೊ ಪಾಠಗಳ ನೇರ ಪ್ರಸಾರ ಕಾರ್ಯಕ್ರಮವನ್ನು ಚಂದನ ಟಿ.ವಿ ಮುಖಾಂತರ ಬಿತ್ತರಿಸಲಾಗುತ್ತಿದೆ.

ವಿದ್ಯಾಗಮ ಕಾರ್ಯಕ್ರಮದಲ್ಲಿ 3 ವಿಧದ ಕಲಿಕಾ ಕೋಣೆಗಳನ್ನು /ತರಗತಿಗಳನ್ನು ರಚಿಸಿ, ವಿದ್ಯಾರ್ಥಿಗಳನ್ನು ಕಲಿಕೆಗೆ ತೊಡಗಿಸಲಾಗಿದೆ. ಒಂದನೇ ವಿಧದಲ್ಲಿ ಯಾವುದೇ ತಾಂತ್ರಿಕ ಪರಿಕರ ಇಲ್ಲದವರಿಗೆ ವಠಾರ ಶಾಲೆ (ಮಕ್ಕಳಿದ್ದಲ್ಲಿಗೆ ಶಿಕ್ಷಕರು ತೆರಳಿ ಒಂದು ಜನ ವಸತಿ ಪ್ರದೇಶದ ಮಕ್ಕಳನ್ನು ಒಂದಡೆ ಸೇರಿಸಿ ಎಲ್ಲಾ ಮುನ್ನೆಚ್ಚರಿಕೆ ಕ್ರಮವಹಿಸಿ ಬೋಧನೆ ಮಾಡಲಾಗುತ್ತದೆ.)ಗಳಲ್ಲಿ ವಿದ್ಯಾರ್ಥಿಗಳಿಗೆ ಶಿಕ್ಷಕರು ಕಲಿಕಾ ಅನುಭವಗಳನ್ನು ಒದಗಿಸುತ್ತಾರೆ, ಎರಡನೆಯ ವಿಧದಲ್ಲಿ ಕೇವಲ ಮೊಬೈಲ್ ಹೊಂದಿದವರಿಗೆ ಎಸ್.ಎಮ್.ಎಸ್ ಮೂಲಕ ಕಲಿಕಾ ವಿಷಯಾಂಶಗಳ ಬಗ್ಗೆ ಮಾಹಿತಿ ನೀಡಲಾಗುತ್ತದೆ. ಮೂರನೇ ವಿಧದಲ್ಲಿ ಅಂದರೆ ಮೊಬೈಲ್ ಇಂಟರ್‌ನೆಟ್ ಸೌಕರ್ಯ ಹೊಂದಿದವರಿಗೆ ಆನ್‌ಲೈನ್ ಪಾಠ ಮಾಡಲಾಗುತ್ತಿದೆ.

ಸಂ:ಇಪಿ272ಎಸ್ಇಎಸ್2020

(ಎಸ್ ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1392
ಮಾನ್ಯ ಸದಸ್ಯರ ಹೆಸರು	ಶ್ರೀಮತಿ ಲಕ್ಷ್ಮೀ ಆರ್. ಹೆಬ್ಬಾಳ್ಕರ್ (ಬೆಳಗಾಂ ಗ್ರಾಮಾಂತರ)
ಉತ್ತರಿಸಬೇಕಾದ ದಿನಾಂಕ	24.09.2020
ಉತ್ತರಿಸುವ ಸಚಿವರು	ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ಹಿಂದುಳಿದ ವರ್ಗಗಳ ಇಲಾಖೆಯಿಂದ ನೀಡುವ ಉಚಿತ ಐ.ಎ.ಎಸ್, ಕೆ.ಎ.ಎಸ್ ಮತ್ತು ಬ್ಯಾಂಕಿಂಗ್ ತರಬೇತಿಗಳಿಗಾಗಿ ಕಳೆದ ವರ್ಷ ಮೀಸಲಿಟ್ಟ ಹಾಗೂ ಖರ್ಚಾದ ಹಣ ಎಷ್ಟು;	ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ನೀಡುವ ಉಚಿತ ಐ.ಎ.ಎಸ್, ಕೆ.ಎ.ಎಸ್ ಮತ್ತು ಬ್ಯಾಂಕಿಂಗ್ ಪರೀಕ್ಷಾ ಪೂರ್ವತರಬೇತಿಗಳಿಗಾಗಿ ಕಳೆದ ವರ್ಷ ಮೀಸಲಿಟ್ಟ ಹಾಗೂ ಖರ್ಚಾದ ಹಣ ರೂ.233 ಲಕ್ಷಗಳು.
ಆ)	2020–21ನೇ ಸಾಲಿನ ಐ.ಎ.ಎಸ್, ಕೆ.ಎ.ಎಸ್ ಮತ್ತು ಬ್ಯಾಂಕಿಂಗ್ ತರಬೇತಿಗಳಿಗಾಗಿ ಅರ್ಜಿ ಸಲ್ಲಿಸಲು ಅಧಿಸೂಚನೆ ಹೊರಡಿಸುವುದು ಯಾವಾಗ;	ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿನ ರಾಜ್ಯ ವಲಯ ಲೆಕ್ಕ ಶೀರ್ಷಿಕೆ 2225–03–277–2–37 ರಡಿ ಹತ್ತಕ್ಕು ಹೆಚ್ಚಿನ ವಿವಿಧ ಕಾರ್ಯಕ್ರಮಗಳಿದ್ದು,ಅಂದಾಜು ರೂ.107.00 ಕೋಟಿಗಳ ಅವಶ್ಯಕತೆ ಇರುತ್ತದೆ. ಆದರೆ 2020–21ನೇ ಸಾಲಿನಲ್ಲಿ ರೂ. 18.00 ಕೋಟಿಗಳನ್ನು ಮಾತ್ರ ಒದಗಿಸಲಾಗಿದೆ. ಆದ್ದರಿಂದ ಹೆಚ್ಚುವರಿ ರೂ.89.00 ಕೋಟಿಗಳನ್ನು ಪೂರಕ ಆಯವ್ಯಯದಲ್ಲಿ ಒದಗಿಸುವಂತೆ ಕೋರಿ ಆರ್ಥಿಕ ಇಲಾಖೆಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿ, ದಿನಾಂಕ:07.09.2020ರಂದು ಆರ್ಥಿಕ ಇಲಾಖೆಯ ಟಿಪ್ಪಣಿಯಲ್ಲಿ ಪ್ರಸ್ತುತ ಕೋವಿಡ್–19 ಹಿನ್ನಲೆಯಲ್ಲಿ ಸರ್ಕಾರದ ರಾಜಸ್ವ ಸಗ್ರಹ ಕಡಿಮೆಯಿದ್ದು, ಪ್ರಸಕ್ತ ಸನ್ನಿವೇಶದಲ್ಲಿ ಹೆಚ್ಚುವರಿ ಅನುದಾನ ಒದಗಿಸಲು ಸಾಧ್ಯವಿರುವುದಿಲ್ಲ. ಆದುದರಿಂದ ಇಲಾಖೆಗೆ ಒದಗಿಸಿರುವ ಅನುದಾನದಲ್ಲಿಯೇ ಆದ್ಯತೆಯ ಮೇರೆಗೆ ಅನುದಾನ ಬಿಡುಗಡೆ ಮಾಡುವ ಬಗ್ಗೆ ಕ್ರಮಕೈಗೊಳ್ಳುವಂತೆ ಆರ್ಥಿಕ ಇಲಾಖೆಯು ಅಭಿಪ್ರಾಯಿಸಿದೆ. ಆದ್ದರಿಂದ ಅನುದಾನ ಲಭ್ಯತೆಯನುಸಾರ ಪರಿಶೀಲಿಸಿ ಕ್ರಮವಹಿಸಲಾಗುವುದು.
ಇ)	ಪ್ರತಿ ವರ್ಷ ಎಷ್ಟು ಜನ ವಿದ್ಯಾರ್ಥಿಗಳು ಇಲಾಖೆಯಿಂದ ಉಚಿತ ಐ.ಎ.ಎಸ್, ಕೆ.ಎ.ಎಸ್ ಮತ್ತು ಬ್ಯಾಂಕಿಂಗ್ ತರಬೇತಿಗಳನ್ನು ಪಡೆದುಕೊಳ್ಳುತ್ತಾರೆ;	ಪ್ರತಿ ವರ್ಷ ಅನುದಾನದ ಲಭ್ಯತೆ ಆಧಾರದ ಮೇಲೆ ಅಂದಾಜು ಐ.ಎ.ಎಸ್ ಪರೀಕ್ಷಾ ಪೂರ್ವತರಬೇತಿಗೆ 400, ಕೆ.ಎ.ಎಸ್ ಪರೀಕ್ಷಾ ಪೂರ್ವತರಬೇತಿಗೆ 250 ಮತ್ತು ಬ್ಯಾಂಕಿಂಗ್ ಪರೀಕ್ಷಾ ಪೂರ್ವತರಬೇತಿಗೆ 250 ರಷ್ಟು ಅಭ್ಯರ್ಥಿಗಳು ಇಲಾಖೆಯಿಂದ ತರಬೇತಿಗಳನ್ನು ಪಡೆದುಕೊಳ್ಳುತ್ತಿದ್ದಾರೆ.
ಈ)	ಒಂದು ತರಬೇತಿ ಸಂಸ್ಥೆಗೆ ಎಷ್ಟು ಜನ ವಿದ್ಯಾರ್ಥಿಗಳನ್ನು ಕಳುಹಿಸಲಾಗುತ್ತದೆ;	ಸದರಿ ಪರೀಕ್ಷಾ ಪೂರ್ವ ತರಬೇತಿಗಳಿಗಾಗಿ ತರಬೇತಿ ಸಂಸ್ಥೆಗಳನ್ನು ಇ–ಪ್ರೋಕ್ಯೂರ್‌ಮೆಂಟ್‌ಪೋರ್ಟಲ್ ಮೂಲಕ ಟೆಂಡರ್ ಆಹ್ವಾನಿಸಿಆಯ್ಕೆ ಮಾಡಲಾಗುವುದು. ಅನುದಾನ ಲಭ್ಯತೆಗೆ ಅನುಗುಣವಾಗಿ ನಿಗದಿಪಡಿಸುವ ಭೌತಿಕಗುರಿಯನ್ನು, ಆಯ್ಕೆಯಾಗುವ ಅರ್ಹ ಸಂಸ್ಥೆಗಳನ್ನು ಆಧರಿಸಿ ಹಂಚಿಕೆ ಮಾಡಿ ಅಭ್ಯರ್ಥಿಗಳನ್ನು ತರಬೇತಿಗೆ ಕಳುಹಿಸಲಾಗುತ್ತದೆ.

ಉ)	ಅಲ್ಪಸಂಖ್ಯಾತ ಇಲಾಖೆ ಮತ್ತು ಸಮಾಜ ಕಲ್ಯಾಣ ಇಲಾಖೆಗಳಿಗಿಂತ ಹಿಂದುಳಿದ ವರ್ಗಗಳ ಇಲಾಖೆಯ ಫಲಿತಾಂಶವನ್ನು ಪ್ರಕಟಿಸಲು ವಿಳಂಬ ಮಾಡುವುದು ಹಾಗೂ ಯೋಜನೆಗಳನ್ನು ಕಾರ್ಯರೂಪಕ್ಕೆತರಲು ನಿಧಾನ ವಹಿಸುವುದರ ಮೂಲಕ ಪ್ರತಿ ವರ್ಷ ಕಳಪೆ ವ್ಯವಸ್ಥೆಯನ್ನು ಪ್ರದರ್ಶಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ಅವ್ಯವಸ್ಥೆಯ ವಿರುದ್ಧ ಕೈಗೊಂಡ ಕಠಿಣ ಕ್ರಮಗಳೇನು;	ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ನೀಡುವ ಐ.ಎ.ಎಸ್, ಕೆ.ಎ.ಎಸ್ ಮತ್ತು ಬ್ಯಾಂಕಿಂಗ್ ಪರೀಕ್ಷಾ ಪೂರ್ವ ತರಬೇತಿಗಳಿಗಾಗಿ ಪ್ರತಿ ವರ್ಷ ಅರ್ಹ ಅಭ್ಯರ್ಥಿಗಳಿಂದ ಆನ್ ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗುತ್ತಿದೆ. ಅರ್ಜಿ ಸಲ್ಲಿಸುವ ಅಭ್ಯರ್ಥಿಗಳಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಸಾಮಾನ್ಯ ಪ್ರವೇಶ ಪರೀಕ್ಷೆಯನ್ನು ನಡೆಸಲಾಗುತ್ತದೆ. ಸದರಿ ಪ್ರಾಧಿಕಾರವು ಫಲಿತಾಂಶವನ್ನು ನೀಡಿದ ನಂತರ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ವೆಬ್‌ಸೈಟ್‌ನಲ್ಲಿ ಫಲಿತಾಂಶವನ್ನು ಪ್ರಕಟಿಸಲಾಗುತ್ತದೆ. ಪ್ರವರ್ಗವಾರು ಮೀಸಲಾತಿ ಮತ್ತು ಮೆರಿಟ್ ಆಧಾರದ ಮೇಲೆ ತಾತ್ಕಾಲಿಕ ಪಟ್ಟಿಯನ್ನು ಇಲಾಖಾ ವೆಬ್ ಸೈಟ್ ನಲ್ಲಿ ಪ್ರಕಟಿಸಿ, ಕೇಂದ್ರ ಕಛೇರಿಯಿಂದ ಅಭ್ಯರ್ಥಿಗಳ ಮೂಲ ದಾಖಲೆಗಳ ಪರಿಶೀಲನೆ ಹಾಗೂ ಕೌನ್ಸಿಲಿಂಗ್ ನಡೆಸುವ ಮೂಲಕ ಅಭ್ಯರ್ಥಿಗಳನ್ನು ವಿವಿಧ ತರಬೇತಿ ಸಂಸ್ಥೆಗಳಿಗೆ ವ್ಯವಸ್ಥಿತವಾಗಿ ನಿಯೋಜಿಸಲಾಗುತ್ತಿದೆ.
ಊ)	ಕಳೆದ ಬಾರಿ ಅರ್ಹತೆ ಪಡೆದಿದ್ದರೂ ತರಬೇತಿಗೆ ಹಾಜರಾಗದ ವಿದ್ಯಾರ್ಥಿಗಳೆಷ್ಟು; ಷರತ್ತು ಹಾಗೂ ನಿಯಮಗಳಿಗನುಸಾರ ತರಬೇತಿಗೆ ಹಾಜರಾಗದ ಎಷ್ಟು ವಿದ್ಯಾರ್ಥಿಗಳಿಂದ ಎಷ್ಟು ಮೊತ್ತದ ದಂಡ ವಸೂಲಿ ಮಾಡಲಾಗಿದೆ?	ಇಲಾಖೆಯಿಂದ ತರಬೇತಿಗೆ ನಿಯೋಜಿಸುವ ಅಭ್ಯರ್ಥಿಗಳು ತರಬೇತಿಗೆ ಹಾಜರಾಗದಿದ್ದಲ್ಲಿ ಅಭ್ಯರ್ಥಿಗಳಿಗೆ ತರಬೇತಿ ಭತ್ಯೆಯನ್ನಾಗಲಿ ಮತ್ತು ಸಂಸ್ಥೆಗೆ ತರಬೇತಿ ಶುಲ್ಕವನ್ನಾಗಲಿ ಪಾವತಿಸಲಾಗುವುದಿಲ್ಲ. ಆದ್ದರಿಂದದಂಡ ವಸೂಲಿಯ ಪ್ರಮೇಯ ಉದ್ಭವಿಸುವುದಿಲ್ಲ.

ಸಂಖ್ಯೆ:ಹಿಂವಕ 535 ಬಿಎಂಎಸ್ 2020

(ಬಿ.ಶ್ರೀರಾಮುಲು)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1405
ಸದಸ್ಯರ ಹೆಸರು : ಶ್ರೀ ಅಬ್ಬಯ್ಯ ಪ್ರಸಾದ್ (ಹುಬ್ಬಳ್ಳಿ-ಧಾರವಾಡ ಪೂರ್ವ)
ಉತ್ತರಿಸುವ ದಿನಾಂಕ : 24-09-2020
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ಕ್ರ ಸಂ.	ಪ್ರಶ್ನೆ	ಉತ್ತರ
ಅ)	ಹೊಸದಾಗಿ ಪಿ.ಯು. ಕಾಲೇಜು ತೆರೆಯಲು ಇರುವ ಮಾನದಂಡವೇನು; (ವಿವರ ನೀಡುವುದು)	ಖಾಸಗಿ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಮಾನದಂಡಗಳನ್ನು ರೂಪಿಸಲಾಗಿದ್ದು, ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಯಾವುದೇ ನಿಖರವಾದ ಮಾನದಂಡವನ್ನು ರಚಿಸಲಾಗಿರುವುದಿಲ್ಲ. ಮುಂದುವರೆದು, ಸರ್ಕಾರಿ ಪದವಿ ಪೂರ್ವ ಕಾಲೇಜು ಪ್ರಾರಂಭಿಸುವ ಕುರಿತಂತೆ ಈ ಕೆಳಕಂಡ ಅಂಶಗಳನ್ನು ಪರಿಗಣಿಸಬಹುದಾಗಿದೆ. 1. ಉದ್ದೇಶಿತ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಸುತ್ತಮುತ್ತ ಇರುವ ಫೀಡಿಂಗ್ ಶಾಲೆಗಳ ಲಭ್ಯತೆ ಆಧಾರದ ಮೇಲೆ ಪರಿಗಣಿಸುವುದು. 2. ಉದ್ದೇಶಿಸಿರುವ ಪ್ರದೇಶಗಳ ಜನಸಂಖ್ಯೆ ಹಾಗೂ ದಾಖಲಾತಿ ಆಗುವ ವಿದ್ಯಾರ್ಥಿಗಳ ದಾಖಲಾತಿ ಪ್ರಮಾಣ. 3. ಆರ್ಥಿಕವಾಗಿ ಹಿಂದುಳಿದ ಪ್ರದೇಶದಲ್ಲಿ ಶೈಕ್ಷಣಿಕ ಪ್ರಗತಿಗೆ ಉತ್ತೇಜನ ನೀಡುವ ಕುರಿತಂತೆ.
ಆ)	ಹುಬ್ಬಳ್ಳಿ-ಧಾರವಾಡ ಪೂರ್ವ ಕ್ಷೇತ್ರದ ವ್ಯಾಪ್ತಿಯಲ್ಲಿ ಪಿ.ಯು.ಕಾಲೇಜು ಇಲ್ಲದೇ ಬಡ ಕೂಲಿ ಕಾರ್ಮಿಕರ ಮಕ್ಕಳಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ರಾಜ್ಯದ 361 ಸರ್ಕಾರಿ ಪ್ರೌಢ ಶಾಲೆಗಳನ್ನು ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನಾಗಿ ಉನ್ನತೀಕರಿಸುವ ಪ್ರಸ್ತಾವನೆ ಇದೆ. ಅದರಲ್ಲಿ ಹುಬ್ಬಳ್ಳಿ, ಧಾರವಾಡ ಕ್ಷೇತ್ರದದಲ್ಲಿ ಈ ಕೆಳಕಂಡ ಸರ್ಕಾರಿ ಪ್ರೌಢ ಶಾಲೆಗಳನ್ನು ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನಾಗಿ ಉನ್ನತೀಕರಿಸುವ ಪ್ರಸ್ತಾವನೆಯು ಸರ್ಕಾರದಲ್ಲಿ ಇರುತ್ತದೆ. 1. ಸರ್ಕಾರಿ ಪ್ರೌಢ ಶಾಲೆ, ಅಣ್ಣಿಗೇರಿ, ನವಲಗುಂದ, ಧಾರವಾಡ. 2. ಸರ್ಕಾರಿ ಪ್ರೌಢ ಶಾಲೆ, ಹಿರೇಹೊನ್ನಿಹಳ್ಳಿ, ಕಲಘಟಗಿ, ಧಾರವಾಡ. 3. ಸರ್ಕಾರಿ ಪ್ರೌಢ ಶಾಲೆ, ಗೋಕುಲ, ಹುಬ್ಬಳ್ಳಿ ಧಾರವಾಡ. 4. ಸರ್ಕಾರಿ ಪ್ರೌಢ ಶಾಲೆ, ಕೋಳಿವಾಡ, ಹುಬ್ಬಳ್ಳಿ, ಧಾರವಾಡ.
ಇ)	ಸದರಿ ಕ್ಷೇತ್ರದಲ್ಲಿ ಯಾವಾಗ ಕಾಲೇಜು ತೆರೆಯಲಾಗುವುದು? (ವಿವರ ನೀಡುವುದು)	

		5. ಸರ್ಕಾರಿ ಪ್ರೌಢ ಶಾಲೆ, ಬೀಡನಾಳ, ಹುಬ್ಬಳ್ಳಿ, ಧಾರವಾಡ. 6. ಸರ್ಕಾರಿ ಪ್ರೌಢ ಶಾಲೆ, ವೀರಾಪುರ, ಧಾರವಾಡ. 7. ಸರ್ಕಾರಿ ಪ್ರೌಢ ಶಾಲೆ, ತಡಕೋಡ, ಧಾರವಾಡ. 8. ಸರ್ಕಾರಿ ಪ್ರೌಢ ಶಾಲೆ, ಅಂಚಟಗೇರಿ, ಹುಬ್ಬಳ್ಳಿ ಧಾರವಾಡ. 9. ಸರ್ಕಾರಿ ಪ್ರೌಢ ಶಾಲೆ, ನೇಕಾರ ನಗರ, ಹಳೇ ಹುಬ್ಬಳ್ಳಿ, ಧಾರವಾಡ. 10. ಸರ್ಕಾರಿ ಪ್ರೌಢ ಶಾಲೆ, ಸದಾಶಿವನಗರ, ಹಳೇ ಹುಬ್ಬಳ್ಳಿ, ಧಾರವಾಡ. 10. ಸರ್ಕಾರಿ ಪ್ರೌಢ ಶಾಲೆ, ಸಂಶಿ, ಕುಂದಗೋಳ, ಧಾರವಾಡ. 11. ಸರ್ಕಾರಿ ಪ್ರೌಢ ಶಾಲೆ, ಆಳ್ನಾವರ, ಧಾರವಾಡ. 12. ಸರ್ಕಾರಿ ಪ್ರೌಢ ಶಾಲೆ, ಮುಗದ, ಧಾರವಾಡ. ಸದರಿ ಕಾಲೇಜುಗಳನ್ನು ಉನ್ನತೀಕರಿಸಲು ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಗೆ ಸಲ್ಲಿಸಿದ್ದು, ಅವರ ನಿರ್ದೇಶನದಂತೆ ಕೆಳಕಂಡ ಮಾಹಿತಿಗಳನ್ನು ಕ್ರೋಢೀಕರಿಸಲಾಗುತ್ತಿದೆ. ಸದರಿ ವಿವರಗಳನ್ನು ಪಡೆದು ಆರ್ಥಿಕ ಇಲಾಖೆಯ ಸಹಮತಿ ಪಡೆಯಲು ಕ್ರಮವಹಿಸಲಾಗುತ್ತಿದೆ. 1) ಈ ಕಾಲೇಜುಗಳನ್ನು ಉನ್ನತೀಕರಿಸುವ ಬಗ್ಗೆ ಮಾನದಂಡಗಳು; 2) ಉನ್ನತೀಕರಿಸುವಂತಹ ಪ್ರದೇಶಗಳಲ್ಲಿ ಎಸ್.ಎಸ್.ಎಲ್.ಸಿ. ಯಿಂದ ಪದವಿ ಪೂರ್ವ ಶಿಕ್ಷಣಕ್ಕೆ ಬರುವ ವಿದ್ಯಾರ್ಥಿಗಳ ಪ್ರತಿಶತ(Average) ವಿವರಗಳು; 3) ಕೆ.ಪಿ.ಶಾಲೆಗಳಡಿ ಈ ಕಾಲೇಜುಗಳನ್ನು ಉನ್ನತೀಕರಿಸಲು ಇರುವ ಅವಕಾಶದ ಬಗ್ಗೆ ಮಾಹಿತಿ; 4) ಪದವಿ ಪೂರ್ವ ಕಾಲೇಜಿನಲ್ಲಿ ವಿದ್ಯಾರ್ಥಿಗಳ ಗರಿಷ್ಠ/ಕನಿಷ್ಠ ಸಂಖ್ಯೆಯ ವಿವರ; 5) ಉಪನ್ಯಾಸಕರ ವಿವರಗಳ ಬಗ್ಗೆ ಸ್ಪಷ್ಟ ಸಂಖ್ಯೆಯ/ಮೊತ್ತದ ಮಾಹಿತಿ;

ಸಂಖ್ಯೆ: ಇಪಿ 129 ಡಿಜಿಡಬ್ಲ್ಯೂ 2020

(ಎಸ್.ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು.

ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ, 7ನೇ ಅಧಿವೇಶನ)

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1410
2) ಸದಸ್ಯರ ಹೆಸರು	:	ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಯಲಬುರ್ಗ)
3) ಉತ್ತರಿಸುವ ದಿನಾಂಕ	:	24-09-2020
4) ಉತ್ತರಿಸುವವರು	:	ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಕೊಪ್ಪಳ ಜಿಲ್ಲೆಯಲ್ಲಿ ಜಿಂಕೆ ವನ ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದಲ್ಲಿದೆಯೇ;	ಇಲ್ಲ.
ಆ)	ಜಿಲ್ಲೆಯಲ್ಲಿ ಜಿಂಕೆಗಳ ಹಾವಳಿಯಿಂದ ಬಾಧಿತವಾಗಿರುವ ರೈತರಿಗೆ ಏನಾದರೂ ಪರಿಹಾರ ನೀಡಲಾಗಿದೆಯೇ; ನೀಡಿದ್ದಲ್ಲಿ ಅಂತಹ ತಾಲ್ಲೂಕುಗಳು ಯಾವುವು;	ಹೌದು. ಕೊಪ್ಪಳ ಜಿಲ್ಲಾ ವ್ಯಾಪ್ತಿಯಲ್ಲಿ ಪಾವತಿಸಲಾದ ದಯಾತ್ಮಕ ಧನದ ವಿವರ ಈ ಕೆಳಕಂಡಂತಿದೆ:- (ರೂ.ಗಳಲ್ಲಿ) ಕ್ರ.ಸಂ: 1 — ತಾಲ್ಲೂಕು: ಕೊಪ್ಪಳ — ಬೆಳೆನಾಶ: ಪ್ರಕರಣ 09, ಮೊತ್ತ 67,060.00
ಇ)	ಈ ಭಾಗದ ರೈತರಿಗೆ ಜಿಂಕೆಗಳ ಹಾವಳಿಯಿಂದ ರಕ್ಷಿಸಲು ಇಲಾಖೆ ಹಾಗೂ ಸರ್ಕಾರ ರೂಪಿಸಿದ ಕಾರ್ಯತಂತ್ರವೇನು;	ಜಿಂಕೆಗಳು ಅರಣ್ಯದಿಂದ ನಾಡಿಗೆ ಬರದಂತೆ ತಡೆಗಟ್ಟಲು ಅವುಗಳ ವಾಸ್ತವ್ಯದ ಅರಣ್ಯ ಪ್ರದೇಶಗಳಲ್ಲಿ ಅವುಗಳಿಗೆ ಆಹಾರಕ್ಕಾಗಿ ಹುಲ್ಲುಗಾವಲು (ಫಾಡರ್ ಪ್ಲಾಟ್) ನಿರ್ಮಾಣ ಹಾಗೂ ಅವುಗಳಿಗೆ ಕುಡಿಯುವ ನೀರಿನ ಸಲುವಾಗಿ ಚೆಕ್ ಡ್ಯಾಂ ನಿರ್ಮಾಣ, ಗಲ್ಲಿ ಚೆಕ್ಸ್ ನಿರ್ಮಾಣ, ನೀರಿನ ಬಾನಿಗಳು, ಅರಣ್ಯದ ಅಂಚಿನಲ್ಲಿ ಸೋಲಾರ್ ತಂತಿ ಬೇಲಿ ನಿರ್ಮಾಣ ಮಾಡಲಾಗುತ್ತಿದೆ.
ಈ)	ಅತೀ ಸೂಕ್ಷ್ಮ ಸಂರಕ್ಷಿತ ವನ್ಯಜೀವಿಯಾಗಿರುವ ಜಿಂಕೆಗಳ ರಕ್ಷಣೆ ಹಾಗೂ ಸ್ಥಳಾಂತರಕ್ಕೆ ಸರ್ಕಾರಕ್ಕೆ ಇರುವ ಅಡೆತಡೆಗಳೇನು;	ಜಿಂಕೆಗಳು ಅಂಜುಬುರುಕ ಹಾಗೂ ತುಂಬಾ ಸೂಕ್ಷ್ಮ ಪ್ರಾಣಿಗಳಾಗಿದ್ದು, ಇವುಗಳನ್ನು ಸೆರೆ ಹಿಡಿಯಲು ಅಥವಾ ಅರವಳಿಕೆ ನೀಡಿ ಸ್ಥಳಾಂತರಿಸಿ ಪ್ರತ್ಯೇಕವಾಗಿ ಉದ್ಯಾನವನದಲ್ಲಿ ಸಂರಕ್ಷಿಸಲು ಸಾಧ್ಯವಿರುವುದಿಲ್ಲ.

Nested table in answer ಆ):

ಕ್ರ.ಸಂ	ತಾಲ್ಲೂಕು	ಬೆಳೆನಾಶ	
		ಪ್ರಕರಣ	ಮೊತ್ತ
1	ಕೊಪ್ಪಳ	09	67,060.00

ಕ್ರಸಂ	ಪ್ರಶ್ನೆ	ಉತ್ತರ
ಉ)	ಈ ಭಾಗದಲ್ಲಿ ಇದುವರೆಗೂ ಪತ್ತೆಯಾಗಿರುವ ಜಿಂಕೆ ಬೇಟೆ ಪ್ರಕರಣಗಳ ಸಂಖ್ಯೆ ಎಷ್ಟು; ಹಾಗೂ ಈ ಪ್ರಕರಣಗಳಲ್ಲಿ ಕೈಗೊಂಡ ಕ್ರಮಗಳೇನು?	ಕೊಪ್ಪಳ ಜಿಲ್ಲಾ ವ್ಯಾಪ್ತಿಯಲ್ಲಿ ಒಟ್ಟು 04 ಜಿಂಕೆ ಬೇಟೆಯಾಡಿರುವ ಪ್ರಕರಣಗಳು ದಾಖಲಾಗಿದ್ದು, ವಿವರ ಕೆಳಕಂಡಂತಿದೆ:-

ಕ್ರ ಸಂ	ಜಿಲ್ಲೆ	ತಾಲ್ಲೂಕು	ಎಫ್.ಓ.ಸಿ ಸಂಖ್ಯೆ	ಕಳ್ಳಬೇಟೆ ಪ್ರಕರಣಗಳ ಸಂಖ್ಯೆ	ಕಳ್ಳಬೇಟೆ ಮಾಡಿರುವ ವನ್ಯಪ್ರಾಣಿಗಳ ಸಂಖ್ಯೆ	ಬಂಧಿಸಿರುವ ಆರೋಪಿಗಳ ಸಂಖ್ಯೆ	ಷರಾ
1	ಕೊಪ್ಪಳ	ಕುಷ್ಟಗಿ	12/2006-07	01	01	-	ಪ್ರಕರಣ ಮುಕ್ತಾಯಗೊಂಡಿರುತ್ತದೆ.
2		ಕೊಪ್ಪಳ	10/2006-07 & 36/2008-09	02	01	-	ಪ್ರಕರಣ ಮುಕ್ತಾಯಗೊಂಡಿರುತ್ತದೆ.
3		ಯಲಬುರ್ಗಾ	11/2020-21	01	20	07	ಪ್ರಕರಣವು ನ್ಯಾಯಾಲಯದಲ್ಲಿ ವಿಚಾರಣಾ ಹಂತದಲ್ಲಿದೆ.

ಸಂಖ್ಯೆ: ಅಪಜೀ 153 ಎಫ್‌ಡಬ್ಲ್ಯೂಎಲ್ 2020

(ಆನಂದ್ ಸಿಂಗ್)
ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು

ಕರ್ನಾಟಕ ವಿಧಾನ ಸಭೆ

1	ಮಾನ್ಯ ಸದಸ್ಯರ ಹೆಸರು	: ಶ್ರೀ ನಾಗೇಂದ್ರ ಎಲ್. (ಚಾಮರಾಜ)
2	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	: 1412
3	ಉತ್ತರಿಸಬೇಕಾದ ದಿನಾಂಕ	: 24-09-2020
4	ಉತ್ತರಿಸಬೇಕಾದವರು	: ಕಾರ್ಮಿಕ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
(ಅ)	ಮೈಸೂರು ನಗರದಲ್ಲಿ ಲೋಕಾರ್ಪಣೆಯಾಗಿರುವ ಇ.ಎಸ್.ಐ. ಆಸ್ಪತ್ರೆಗೆ ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರದ ವತಿಯಿಂದ ಪ್ರತ್ಯೇಕವಾಗಿ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ; (ವಿವರ ಒದಗಿಸುವುದು)	ಮೈಸೂರು ನಗರದಲ್ಲಿ ಲೋಕಾರ್ಪಣೆಯಾಗಿರುವ ಇ.ಎಸ್.ಐ. ಆಸ್ಪತ್ರೆಯ ನವೀಕರಣಕ್ಕಾಗಿ ಕಾರಾವಿ. ನಿಗಮದ ವತಿಯಿಂದ 34.25 ಕೋಟಿ ಬಿಡುಗಡೆ ಮಾಡಲಾಗಿದೆ. ರಾಜ್ಯ ಸರ್ಕಾರದಿಂದ ಯಾವುದೇ ಅನುದಾನ ಬಿಡುಗಡೆಯಾಗಿಲ್ಲ.
(ಆ)	ಪ್ರಸ್ತುತ ಆಸ್ಪತ್ರೆಯಲ್ಲಿ ಎಲ್ಲಾ ತರಹದ ರೋಗಿಗಳಿಗೆ ಚಿಕಿತ್ಸೆ ಲಭ್ಯವಾಗುತ್ತಿದೆಯೇ; ಆಸ್ಪತ್ರೆಯಲ್ಲಿ ಔಷಧಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಕೈಗೊಂಡಿರುವ ಕ್ರಮಗಳೇನು;	ಪ್ರಸ್ತುತ ಆಸ್ಪತ್ರೆಯಲ್ಲಿ ತುರ್ತು ಚಿಕಿತ್ಸೆ, ಪ್ರಾಥಮಿಕ ಹಾಗೂ ಸೆಕೆಂಡರಿ ಕೇರ್ ಚಿಕಿತ್ಸೆಗಳನ್ನು ವಿಮಾ ರೋಗಿಗಳಿಗೆ ವಿಸ್ತರಿಸಲಾಗುತ್ತಿದೆ. ಆಸ್ಪತ್ರೆಯಲ್ಲಿ ಲಭ್ಯವಿಲ್ಲದ ಚಿಕಿತ್ಸೆಯನ್ನು ಹೊಂದಾಣಿಕೆ ಮಾಡಿಕೊಂಡ 04 ಸೂಪರ್ ಸ್ಪೆಷಾಲಿಟಿ ಮತ್ತು 09 ಸೆಕೆಂಡರಿ ಕೇರ್ ಖಾಸಗಿ ಆಸ್ಪತ್ರೆಗಳ ಮುಖಾಂತರ ನೀಡಲಾಗುತ್ತಿದೆ. ಔಷಧಿಗಳ ಸರಬರಾಜು ಸಮರ್ಪಕವಾಗಿರುತ್ತದೆ.
(ಇ)	ಸದರಿ ಆಸ್ಪತ್ರೆಯಲ್ಲಿ ಡಯಾಲಿಸೀಸ್ ಕೇಂದ್ರ ಲಭ್ಯವಿದೆಯೇ; ಇದ್ದಲ್ಲಿ, ಒಂದುಬಾರಿ ಡಯಾಲಿಸೀಸ್ ಮಾಡಲು ಎಷ್ಟು ಶುಲ್ಕ ವಿಧಿಸಲಾಗಿದೆ; ಮತ್ತು ಡಯಾಲಿಸೀಸ್ ರೋಗಿಗಳ ಡಯಾಲೈಸರ್‌ಗಳನ್ನು ತರಬೇಕಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಸದರಿ ಆಸ್ಪತ್ರೆಯಲ್ಲಿ ಡಯಾಲಿಸಿಸ್ ಚಿಕಿತ್ಸೆ ಲಭ್ಯವಿರುವುದಿಲ್ಲ. ಕಾರಾವಿ. ನಿಗಮದಿಂದ ಒಡಂಬಡಿಕೆ ಮಾಡಿಕೊಳ್ಳಲಾಗಿರುವ ಸೂಪರ್ ಸ್ಪೆಷಾಲಿಟಿ ಖಾಸಗಿ ಆಸ್ಪತ್ರೆಗಳ ಮೂಲಕ ವಿಮಾರೋಗಿಗಳನ್ನು ಚಿಕಿತ್ಸೆಯನ್ನು ನೀಡಲಾಗುತ್ತಿದೆ.

……………..2

(ಈ) ಸದರಿ ಆಸ್ಪತ್ರೆಯಲ್ಲಿ ಒಟ್ಟು ರೋಗಿಗಳಿಗೆ ಅನುಗುಣವಾಗಿ ಎಷ್ಟು ವೈದ್ಯರು, ನರ್ಸ್‌ಗಳು ಮತ್ತು ತಾಂತ್ರಿಕ ತಜ್ಞರಿದ್ದಾರೆ; (ವಿವರ ಒದಗಿಸುವುದು)

ಈ ಆಸ್ಪತ್ರೆಯಲ್ಲಿ ರೋಗಿಗಳಿಗೆ ಅನುಗುಣವಾಗಿ ವೈದ್ಯರು, ನರ್ಸ್‌ಗಳು ಮತ್ತು ತಾಂತ್ರಿಕ ತಜ್ಞರ ಕೊರತೆ ಇರುತ್ತದೆ. ವೃಂದಾವಾರು ವಿವರ ಈ ಕೆಳಕಂಡಂತಿದೆ.

ಕ್ರ. ಸಂ.	ವೃಂದ	ಮಂಜೂರಾತಿ	ಕಾರ್ಯ ನಿರ್ವಹಣೆ	ಖಾಲಿ
1	ವೈದ್ಯರು	41	31	10
2	ಶುಶ್ರೂಷಕ ಅಧೀಕ್ಷಕರು ದರ್ಜೆ-1	01	00	01
3	ಶುಶ್ರೂಷಕ ಅಧೀಕ್ಷಕರು ದರ್ಜೆ-2	04	03	01
4	ಶುಶ್ರೂಷಕರು	38	22	16
5	ಎ. ಎನ್. ಎಂ.	01	00	01
6	ತಾಂತ್ರಿಕ ತಜ್ಞರು	10	06	04

ಪ್ರಸ್ತುತ ಸಿಬ್ಬಂದಿಗಳ ಕೊರತೆ ನಿವಾರಿಸಲು ಗುತ್ತಿಗೆ ಆಧಾರದ ಮೇಲೆ ವೈದ್ಯರು-02, ಶುಶ್ರೂಷಕರು–02 ಮತ್ತು ತಾಂತ್ರಿಕ ತಜ್ಞರು–02 ಹುದ್ದೆಗಳನ್ನು ನೇಮಕಾತಿ ಮಾಡಲಾಗಿದೆ.

(ಉ) ಕೇಂದ್ರ ಸರ್ಕಾರದ ನೌಕರರಿಗೆ ಹಾಗೂ ರಾಜ್ಯ ಸರ್ಕಾರದ ನೌಕರರಿಗೆ ಚಿಕಿತ್ಸೆಯಲ್ಲಿ ತಾರತಮ್ಯ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕೈಗೊಂಡಿರುವ ಕ್ರಮಗಳೇನು?

ಇಲಾಖೆಯು ವಿಮಾದಾರರಿಗೆ ಹಾಗೂ ಅವರ ಕುಟುಂಬದ ಸದಸ್ಯರಿಗೆ ಮಾತ್ರ ಪೂರ್ಣ ಪ್ರಮಾಣದ ವೈದ್ಯಕೀಯ ಸೌಲಭ್ಯ ವಿಸ್ತರಿಸಲಾಗುತ್ತಿದೆ. ಮತ್ತು ರಾಜ್ಯ ಹಾಗೂ ಕೇಂದ್ರ ಸರ್ಕಾರಿ ನೌಕರರು ಕಾರಾವಿ. ಯೋಜನೆಯ ವ್ಯಾಪ್ತಿಗೆ ಒಳಪಡುವುದಿಲ್ಲ.

LD-LSI/164/2020

(ಅರಬೈಲ್ ಶಿವರಾಂ ಹೆಬ್ಬಾರ್)
ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:	1416
ಮಾನ್ಯ ಸದಸ್ಯರ ಹೆಸರು	ಶ್ರೀ ರಾಮಲಿಂಗಾ ರೆಡ್ಡಿ
ಉತ್ತರಿಸುವ ಸಚಿವರು	ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ)
ಉತ್ತರಿಸಬೇಕಾದ ದಿನಾಂಕ	24-09-2020

	ಪ್ರಶ್ನೆ	ಉತ್ತರ
(ಅ)	ಕಳೆದ 10 ವರ್ಷಗಳಿಂದ ರಾಜ್ಯದ ವಿಶ್ವವಿದ್ಯಾನಿಲಯಗಳು ಮತ್ತು ಸರ್ಕಾರಿ ಪದವಿ ಕಾಲೇಜುಗಳ ಗ್ರಂಥಾಲಯಗಳಲ್ಲಿ "ಖಾಯಂ" ಗ್ರಂಥಪಾಲಕ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
(ಆ)	ರಾಜ್ಯದಲ್ಲಿ ಖಾಲಿಯಿರುವ "ಖಾಯಂ ಗ್ರಂಥಪಾಲಕರ" ಹುದ್ದೆಗಳೆಷ್ಟು;	ರಾಜ್ಯದ ವಿಶ್ವವಿದ್ಯಾನಿಲಯಗಳಲ್ಲಿ ಖಾಲಿ ಇರುವ ಗ್ರಂಥಪಾಲಕರ ವಿವರ ಈ ಕೆಳಕಂಡಂತಿದೆ;

ಕ್ರ.ಸಂ.	ವಿಶ್ವವಿದ್ಯಾನಿಲಯದ ಹೆಸರು	ಖಾಲಿ ಇರುವ ಗ್ರಂಥಪಾಲಕರ ಹುದ್ದೆಗಳ ಸಂಖ್ಯೆ
1	ಕರ್ನಾಟಕ ಜಾನಪದ ವಿಶ್ವವಿದ್ಯಾನಿಲಯ	01
2	ಮೈಸೂರು ವಿಶ್ವವಿದ್ಯಾನಿಲಯ	01
3	ಕನ್ನಡ ವಿಶ್ವವಿದ್ಯಾನಿಲಯ	01
4	ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾನಿಲಯ	01
5	ತುಮಕೂರು ವಿಶ್ವವಿದ್ಯಾನಿಲಯ	01
6	ಕುವೆಂಪು ವಿಶ್ವವಿದ್ಯಾನಿಲಯ	01
7	ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾನಿಲಯ	01
8	ಮಂಗಳೂರು ವಿಶ್ವವಿದ್ಯಾನಿಲಯ	01
9	ಅಕ್ಕಮಹಾದೇವಿ ವಿಶ್ವವಿದ್ಯಾನಿಲಯ	01
10	ರಾಣಿ ಚನ್ನಮ್ಮ ವಿಶ್ವವಿದ್ಯಾನಿಲಯ	01
11	ಬೆಂಗಳೂರು ವಿಶ್ವವಿದ್ಯಾನಿಲಯ	01
12	ಗುಲ್ಬರ್ಗ ವಿಶ್ವವಿದ್ಯಾನಿಲಯ	04
13	ಕರ್ನಾಟಕ ವಿಶ್ವವಿದ್ಯಾನಿಲಯ	01
ವಿಶ್ವವಿದ್ಯಾನಿಲಯಗಳಲ್ಲಿ ಒಟ್ಟು ಖಾಲಿ ಇರುವ ಹುದ್ದೆಗಳ ಸಂಖ್ಯೆ:		**16**
ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಗ್ರಂಥಪಾಲಕ ಹುದ್ದೆಗಳ ಸಂಖ್ಯೆ:		**115**
ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಒಟ್ಟು ಗ್ರಂಥಪಾಲಕ ಹುದ್ದೆಗಳ ಸಂಖ್ಯೆ		**131**

(ಇ)	ಖಾಯಂ ಗ್ರಂಥಪಾಲಕರನ್ನು ನೇಮಕ ಮಾಡಿಕೊಳ್ಳಲು ಎದುರಾಗುತ್ತಿರುವ ತೊಡಕುಗಳೇನು?	ರಾಜ್ಯದಲ್ಲಿ ಕೋವಿಡ್-19 ನಿಂದ ಉಂಟಾದ ಪರಿಸ್ಥಿತಿಯನ್ನು ನಿಭಾಯಿಸಿ ಆರ್ಥಿಕ ಸ್ಥಿತಿಯನ್ನು ಸುಸ್ಥಿತಿಗೆ ತರುವ ನಿಟ್ಟಿನಲ್ಲಿ ಸಂಪನ್ಮೂಲವನ್ನು ಕ್ರೋಢೀಕರಿಸುವುದು ಅಗತ್ಯವಾಗಿರುವುದರಿಂದ, 2020-21ನೇ ಸಾಲಿನ ಆರ್ಥಿಕ ವರ್ಷದಲ್ಲಿ ಎಲ್ಲಾ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವುದನ್ನು ಆರ್ಥಿಕ ಇಲಾಖೆಯು ಸುತ್ತೋಲೆ ಸಂಖ್ಯೆ: ಆಇ 03 ಬಿಇಎಂ 2020, ದಿನಾಂಕ:06.07.2020ರಲ್ಲಿ ತಡೆಹಿಡಿದಿರುತ್ತದೆ. ಆದ್ದರಿಂದ, ರಾಜ್ಯದ ಎಲ್ಲಾ ವಿಶ್ವವಿದ್ಯಾನಿಲಯಗಳಲ್ಲಿ ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಬೋಧಕ/ ಬೋಧಕೇತರ ಹುದ್ದೆಗಳ ನೇರ ನೇಮಕಾತಿ ಪ್ರಕ್ರಿಯೆಯನ್ನು ತಡೆಹಿಡಿಯಲಾಗಿರುತ್ತದೆ.

ಸಂಖ್ಯೆ: ಇಡಿ 275 ಯುಎನ್ಇ 2020

(ಡಾ: ಅಶ್ವಥ್ ನಾರಾಯಣ ಸಿ.ಎನ್.)
ಉಪ ಮುಖ್ಯಮಂತ್ರಿಗಳು
(ಉನ್ನತ ಶಿಕ್ಷಣ, ಐಟಿ & ಬಿಟಿ,
ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ)

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1421
ಮಾನ್ಯ ಸದಸ್ಯರ ಹೆಸರು	ಶ್ರೀ.ಶಿವಶಂಕರರೆಡ್ಡಿ.ಎನ್.ಹೆಚ್ (ವಿಧಾನ ಸಭೆ ಸದಸ್ಯರು)
ಉತ್ತರಿಸಬೇಕಾದ ದಿನಾಂಕ	24-09-2020
ಉತ್ತರಿಸುವ ಸಚಿವರು	ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು .

ಕ್ರ.ಸಂ.	ಪ್ರಶ್ನೆ	ಉತ್ತರ
ಅ	ಗೌರಿಬಿದನೂರು ಎಂ.ಸಿ.ಹೆಚ್. ಆಸ್ಪತ್ರೆ ಪ್ರಾರಂಭವಾಗಿ ಎರಡು ವರ್ಷಗಳಾದರೂ ಅಗತ್ಯವಿರುವ ಡಾಕ್ಟರ್ ಮತ್ತು ಸಿಬ್ಬಂದಿಯವರನ್ನು ಮಂಜೂರು ಮಾಡದಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ
ಆ	ಹಾಗಾದರೆ ಯಾವಾಗ ಸಂಪೂರ್ಣ ಸಿಬ್ಬಂದಿಯನ್ನು ನೀಡಿ ಪರಿಣಾಮಕಾರಿಯಾಗಿ ಆಸ್ಪತ್ರೆ ನಡೆಸಲು ಕ್ರಮವಹಿಸಲಾಗುವುದು? (ವಿವರ ತಿಳಿಸುವುದು)	1. ತಜ್ಞ ವೈದ್ಯರು, ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳು ಹಾಗೂ ದಂತ ಆರೋಗ್ಯಾಧಿಕಾರಿಗಳ ಹುದ್ದೆಗಳನ್ನು ಭರ್ತಿಮಾಡಲು ಈಗಾಗಲೇ ದಿನಾಂಕ:10.09.2020 ರಂದು ವಿಶೇಷ ನೇಮಕಾತಿ ಸಮಿತಿಯಿಂದ ಭರ್ತಿಮಾಡಲು ಅಧಿಸೂಚನೆ ಹೊರಡಿಸಲಾಗಿದ್ದು, ಅರ್ಹ ಅಭ್ಯರ್ಥಿಗಳಿಂದ ಆನ್-ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು ನೇಮಕಾತಿ ಪ್ರಕ್ರಿಯೆ ಚಾಲ್ತಿಯಲ್ಲಿದೆ. 2. 883 ಶುಶ್ರೂಷಕರು (ಡಿಪ್ಲಮೋ) ಹುದ್ದೆಗಳಿಗೆ ದಿನಾಂಕ 16.07.2020 ರಲ್ಲಿ ಅಂತಿಮ ಆಯ್ಕೆಪಟ್ಟಿಯನ್ನು ಪ್ರಕಟಿಸಿದ್ದು, ಆಯ್ಕೆಯಾದ ಅಭ್ಯರ್ಥಿಗಳಿಗೆ ದಿನಾಂಕ:14.09.2020 ರಿಂದ 16.09.2020 ರವರೆಗೆ ಸ್ಥಳ ಆಯ್ಕೆಯ ಕೌನ್ಸಿಲಿಂಗ್ ನಡೆಸಲಾಗಿದ್ದು, ಪೊಲೀಸ್ ಪೂರ್ವಾಪರ, ಸಿಂಧುತ್ವ ಹಾಗೂ ಇನ್ನಿತರ ಎಲ್ಲಾ ವರದಿಗಳು ಸ್ವೀಕೃತವಾಗಿರುವ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡಲು ಕ್ರಮ ವಹಿಸಲಾಗುತ್ತಿದೆ.

		3. ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಖಾಲಿ ಇರುವ 293 ವಿವಿಧ ವೃಂದದ ಅರೆ-ವೈದ್ಯಕೀಯ ಹುದ್ದೆಗಳನ್ನು ಭರ್ತಿಮಾಡಲು ಹಾಗೂ ಉಳಿಕೆ ಮೂಲ ವೃಂದದಲ್ಲಿ ಖಾಲಿ ಇರುವ ಫಾರ್ಮಸಿಸ್ಟ್-400, ಕ್ಷ-ಕಿರಣ ತಂತ್ರಜ್ಞರು-08 ಮತ್ತು ಕಿರಿಯ ಪ್ರಯೋಗಶಾಲಾ ತಂತ್ರಜ್ಞರು-150 ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿಮಾಡಲು ಕರಡು ವಿಶೇಷ ನೇಮಕಾತಿ ನಿಯಮಗಳನ್ನು ರಚಿಸಲಾಗಿದ್ದು, ಸಚಿವ ಸಂಪುಟದ ಅನುಮೋದನೆ ಪಡೆದುಕೊಂಡು ನೇಮಕಾತಿ ಪ್ರಕ್ರಿಯೆಯನ್ನು ಚಾಲನೆಗೊಳಿಸಲಾಗುವುದು..

ಆಕುಕ 55 ಹೆಚ್‌ಎಸ್‌ಡಿ 2020

(ಬಿ. ಶ್ರೀರಾಮುಲು)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

ಕರ್ನಾಟಕ ವಿಧಾನಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1423
ಸದಸ್ಯರ ಹೆಸರು	ಶ್ರೀ ಬಂಡೆಪ್ಪ ಖಾಂಶೆಂಪುರ್ (ಬೀದರ್ ದಕ್ಷಿಣ)
ಉತ್ತರಿಸಬೇಕಾದ ದಿನಾಂಕ	24-09-2020
ಉತ್ತರಿಸಬೇಕಾದ ಸಚಿವರು	ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು

ಪ್ರಶ್ನೆ	ಉತ್ತರ
ಅ) 2020-21ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ಕೋವಿಡ್ ಪಿಡುಗುನಿಂದ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಶಾಲೆಗಳನ್ನು ಪ್ರಾರಂಭಿಸಲು ಸಾಧ್ಯವಾಗದ ಕಾರಣ ಖಾಸಗಿ ವಿದ್ಯಾಸಂಸ್ಥೆಗಳು ಆನ್‌ಲೈನ್ ಮೂಲಕ ತರಗತಿಗಳನ್ನು ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
ಆ) ಬಂದಿದ್ದಲ್ಲಿ, ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಶಾಲಾ ವಿದ್ಯಾರ್ಥಿಗಳಿಗೆ ಯಾವ ರೀತಿ ತರಗತಿಗಳನ್ನು ನಡೆಸಲಾಗುತ್ತಿದೆ;	ಕೋವಿಡ್-19ರ ಕಾರಣದಿಂದ ರಾಜ್ಯದಲ್ಲಿ 2020-21ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ಸರ್ಕಾರಿ/ಖಾಸಗಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳನ್ನು ಪ್ರಾರಂಭಿಸಲು ಸಾಧ್ಯವಾಗದ ಹಿನ್ನೆಲೆಯಲ್ಲಿ ರಾಜ್ಯದ ಎಲ್ಲಾ ಶಾಲೆಗಳಲ್ಲಿ 'ವಿದ್ಯಾಗಮ' ನಿರಂತರ ಕಲಿಕಾ ಕಾರ್ಯಕ್ರಮದಡಿ ಶಿಕ್ಷಕರು, ಶಾಲಾ ಮೇಲುಸ್ತುವಾರಿ ಸಮಿತಿ ಸದಸ್ಯರು, ಆಡಳಿತ ಮಂಡಳಿಯವರು, ಸ್ವಯಂ ಸೇವಕರು, ಪೋಷಕರನ್ನು ಭಾಗಿದಾರರನ್ನಾಗಿ ಮಾಡಿಕೊಂಡು ಸಕ್ರಿಯವಾಗಿ ತೊಡಗಿಸಿಕೊಂಡು 'ಸಂವೇದ' ದೂರದರ್ಶನ ಆಧಾರಿತ ಕಲಿಕೆ ಕಾರ್ಯಕ್ರಮವನ್ನು ಇಲಾಖೆ ನಿಗದಿಪಡಿಸಿರುವ ವಾರ್ಷಿಕ ಕಾರ್ಯ ಯೋಜನೆಗಳ ಪ್ರಕಾರ ರಾಜ್ಯಾದ್ಯಂತ ಪ್ರಚುರ ಪಡಿಸಲಾಗುತ್ತಿದೆ. ಇದೇ ರೀತಿ 'ಯೂ ಟ್ಯೂಬ್' ತರಗತಿಗಳು 1 ರಿಂದ 10ನೇ ತರಗತಿಯವರೆಗೆ ಆಂಗ್ಲ ಮತ್ತು ಕನ್ನಡ ಮಾಧ್ಯಮದಲ್ಲಿ ಪಾಠಗಳನ್ನು ಶಿಕ್ಷಕರ ಬೋಧನೆಯ ವಿಡಿಯೋ ತಯಾರಿಸಿ ಯೂಟ್ಯೂಬ್ ಮೂಲಕ ಅಪ್‌ಲೋಡ್ ಮಾಡಲಾಗುತ್ತಿದೆ. • ರಾಜ್ಯದ ಎಲ್ಲಾ ಶಾಲೆಗಳಿಗೆ ಏಕರೂಪದ 'ವಾರ್ಷಿಕ ಕಾರ್ಯ ಯೋಜನೆ'ಯನ್ನು ತರಗತಿವಾರು ವಿಷಯವಾರು ರಾಜ್ಯ ಮಟ್ಟದಲ್ಲಿ ಸಿದ್ದಪಡಿಸಿ ಸಮಗ್ರ ಶಿಕ್ಷಣ ಕರ್ನಾಟಕದ ಜಾಲತಾಣದಲ್ಲಿ ನೀಡಲಾಗಿದೆ. 1. ತರಗತಿ ವಿಧ 1- ಯಾವುದೇ ತಂತ್ರಜ್ಞಾನ ಆಧಾರಿತ ಸಾಧನಗಳು ಇಲ್ಲದ (ಮೊಬೈಲ್ ರಹಿತ)ಮಕ್ಕಳ ತರಗತಿ

	2. ತರಗತಿ ವಿಧ 2– ಇಂಟರ್‌ನೆಟ್ ರಹಿತ ಮೊಬೈಲ್ ಫೋನ್ ಹೊಂದಿರುವ ತರಗತಿ 3. ತರಗತಿ ವಿಧ 3– ಇಂಟರ್‌ನೆಟ್ ಸಹಿತ ಕಂಪ್ಯೂಟರ್/ಟ್ಯಾಬ್/ ಸ್ಮಾರ್ಟ್ ಫೋನ್ ಹೊಂದಿರುವ ತರಗತಿ. ● ಮೂರು ತರಗತಿಗಳ ಮಾರ್ಗದರ್ಶಿ ಶಿಕ್ಷಕರು ಕೇವಲ ತಂತ್ರಜ್ಞಾನಾಧಾರಿತ ಸಾಧನಗಳ ಮೇಲೆ ಅಥವಾ ಶಿಕ್ಷಕರ ಮೇಲೆ ಮಕ್ಕಳು ಅವಲಂಬಿತರಾಗದೆ ಸ್ವಯಂ ಕಲಿಕೆಗೆ ಪೂರಕವಾಗುವಂತಹ ಚಟುವಟಿಕೆಗಳಿಗೆ ಪ್ರಾಮುಖ್ಯತೆಯನ್ನು ನೀಡುವುದು. ಆಯುಕ್ತರ ಕಛೇರಿ ಮತ್ತು ಸಮಗ್ರ ಶಿಕ್ಷಣ ಕರ್ನಾಟಕ, ಇವರ ಸುತ್ತೋಲೆ ಸಂಖ್ಯೆ:ಸಶಿಕಾ/ವಿದ್ಯಾಗಮ/ಅ/13497/2020–21. ದಿನಾಂಕ:4–8–2020ರಲ್ಲಿ ಆನ್‌ಲೈನ್ ಶಿಕ್ಷಣ ಪಡೆಯಲಾಗದೆ ಇರುವಂತಹ ಹಾಗೂ ಯಾವುದೇ ತಂತ್ರಜ್ಞಾನ ಹೊಂದದೇ ಇರತಕ್ಕಂತಹ ಶೇಕಡ 80 ಕ್ಕಿಂತ ಹೆಚ್ಚಿನ ಮಕ್ಕಳು ನಿರಂತರ ಕಲಿಕೆಯನ್ನು ಮುಂದುವರೆಸಿಕೊಂಡು ಹೋಗಲು ಶಾಲೆ ಹಾಗೂ ಶಿಕ್ಷಕರು ಮಕ್ಕಳೊಂದಿಗೆ ಸಂಪರ್ಕ ಸಾಧಿಸಿ ಮನೋಸ್ಥೈರ್ಯವನ್ನು ಹೆಚ್ಚಿಸುವ ಹಾಗೂ ನಿರಂತರ ಕಲಿಕೆಯನ್ನು ಮುಂದುವರೆಸುವುದಕ್ಕಾಗಿ ರಾಜ್ಯ ಸರ್ಕಾರವು "ವಿದ್ಯಾಗಮ" ಕಲಿಕಾ ಯೋಜನೆಯನ್ನು ಜಾರಿಗೆ ತಂದಿದೆ. ಅದೇ ರೀತಿ "ಸಂವೇದ" ಕಾರ್ಯಕ್ರಮದಲ್ಲಿ ದೂರದರ್ಶನದ ಮುಖಾಂತರ ಬೋಧನೆಯನ್ನು ಮುಂದುವರೆಸಲಾಗಿರುತ್ತದೆ.
ಇ) ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಶಾಲಾ ವಿದ್ಯಾರ್ಥಿಗಳಿಗೆ ಆನ್‌ಲೈನ್ ಮೂಲಕ ತರಗತಿಗಳನ್ನು ನಡೆಸಲು ಅವರಿಗೆ ಸರ್ಕಾರದ ವತಿಯಿಂದ ಟ್ಯಾಬ್ ಅಥವಾ ಸ್ಮಾರ್ಟ್ ಫೋನ್ ಒದಗಿಸುವ ಪ್ರಸ್ತಾವನೆ ಸರ್ಕಾರದ ಮುಂದಿಯೇ? (ವಿವರ ನೀಡುವುದು)	ಯಾವುದೇ ಪ್ರಸ್ತಾವನೆ ಇರುವುದಿಲ್ಲ.

ಇಡಿ 120 ಪಿಜಿಸಿ 2020

[ಎಸ್.ಸುರೇಶ್ ಕುಮಾರ್]
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ
ಸಕಾಲ ಸಚಿವರು.

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1427
ಸದಸ್ಯರ ಹೆಸರು	:	ಶ್ರೀ. ಕೃಷ್ಣ ಭೈರೇಗೌಡ (ಬ್ಯಾಟರಾಯನಪುರ)
ಉತ್ತರಿಸುವ ದಿನಾಂಕ	:	24-9-2020.
ಉತ್ತರಿಸುವ ಸಚಿವರು	:	ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ ಸಂ	ಪ್ರಶ್ನೆ	ಉತ್ತರಗಳು
ಅ)	ರೋಗಿಗಳು ಬಳಸುವ ಔಷಧಗಳನ್ನು ಖಾಸಗಿ ಔಷಧಾಲಯದಲ್ಲಿ ಹೆಚ್ಚಿನ ಬೆಲೆಗೆ ಹಾಗೂ ಅವಧಿ ಮುಗಿದ ಔಷಧಿಯನ್ನು ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	1. ಔಷಧ ಮತ್ತು ಕಾಂತಿವರ್ಧಕ ಅಧಿನಿಯಮ 1940 ಮತ್ತು ಅದರಡಿಯ ನಿಯಮಾವಳಿಗಳ ಪ್ರಕಾರ ಈ ಇಲಾಖೆಯ ಅಮಲುಜಾರಿ ಅಧಿಕಾರಿಗಳು ತಮ್ಮ ದೈನಂದಿನ ಪರಿವೀಕ್ಷಣೆ ಸಮಯದಲ್ಲಿ ಅವಧಿ ಮುಗಿದ ಔಷಧ ಮಾರಾಟ ಮಾಡುವುದು ಕಂಡು ಬಂದಲ್ಲಿ ಹಾಗೂ ಸದರಿ ವಿಷಯಕ್ಕೆ ಸಂಬಂಧಿಸಿದಂತೆ ದೂರುಗಳು ಬಂದಲ್ಲಿ ನಿಯಮಾನುಸಾರ ತನಿಖೆ ಮಾಡಿ ಕ್ರಮವನ್ನು ಜರುಗಿಸುತ್ತಿದ್ದಾರೆ. 2. ಖಾಸಗಿ ಔಷಧಾಲಯಗಳು ಔಷಧಗಳನ್ನು **National Pharmaceutical Pricing Authority,** ನವದೆಹಲಿ ರವರು ನಿಗದಿಪಡಿಸಿದ ದರಗಳಿಗಿಂತ ಹೆಚ್ಚಿನ ಬೆಲೆಯಲ್ಲಿ ಮಾರಾಟ ಮಾಡುವುದು/ದೂರುಗಳು ಬಂದಲ್ಲಿ **Essential Commodities 1955 Act** ಪ್ರಕಾರ ಸಂಬಂಧಪಟ್ಟ ಕಾರ್ಯವ್ಯಾಪ್ತಿಯ ನ್ಯಾಯಾಲಯಗಳಲ್ಲಿ ಮೊಕದ್ದಮೆ ಹೂಡಲಾಗುತ್ತಿದೆ.
ಆ)	ಬಂದಿದ್ದಲ್ಲಿ ಸರ್ಕಾರ ಇದನ್ನು ತಡಯಲು ಯಾವ ಕ್ರಮ ತೆಗೆದುಕೊಂಡಿದೆ? (ಜಿಲ್ಲಾವಾರು ಮಾಹಿತಿ ನೀಡುವುದು)	1. ಬೆಂಗಳೂರು ವೃತ್ತ-4ರ ಕಾರ್ಯವ್ಯಾಪ್ತಿಯಲ್ಲಿ ಮೆ:ಮೆಡ್‌ಪ್ಲಸ್ ಸಂಸ್ಥೆಯವರು ಹೆಚ್ಚಿನ ಬೆಲೆಗೆ ಮಾರಾಟ ಮಾಡಿರುವುದು ಕಂಡುಬಂದು, ಸಂಸ್ಥೆಯವರ ವಿರುದ್ಧ ಮಾನ್ಯ **III Additional Chief Metropolitan** ನ್ಯಾಯಾಲಯದಲ್ಲಿ ಸಿ.ಸಿ.ಸಂಖ್ಯೆ: 7712/2019 ರಲ್ಲಿ ಮೊಕದ್ದಮೆ ಹೂಡಿದ್ದು, ಪ್ರಕರಣವು ವಿಚಾರಣೆಯ ಹಂತದಲ್ಲಿದೆ. 2. ರಾಜ್ಯದಲ್ಲಿ 04 ಪ್ರಕರಣಗಳು ಅವಧಿ ಮುಗಿದ ಔಷಧಗಳನ್ನು ಮಾರಾಟ ಮಾಡಿರುವುದು ಕಂಡು ಬಂದಿದೆ. ಅವುಗಳ ವಿವರ ಈ ಕೆಳಕಂಡತಿಂದೆ: ಅ) ಡಾ॥ ಅರವಿಂದ್ ಫಾರ್ಮ ಬೆಂಗಳೂರು-79 ಸಂಸ್ಥೆಯವರು ಅವಧಿ ಮುಗಿದ ಔಷಧವನ್ನು ಮಾರಾಟ ಮಾಡಿದ್ದಕ್ಕಾಗಿ ಮಾನ್ಯ ಆರ್ಥಿಕ ಮತ್ತು ಅಪರಾಧಗಳ ನ್ಯಾಯಾಲಯ, ಬೆಂಗಳೂರು ಇಲ್ಲಿ ಸಿ.ಸಿ.ಸಂಖ್ಯೆ: 04/2020ರಲ್ಲಿ ಮೊಕದ್ದಮೆ ದಾಖಲಿಸಲಾಗಿದೆ, ಪ್ರಕರಣವು ವಿಚಾರಣೆಯ ಹಂತದಲ್ಲಿದೆ.

		ಆ) ಮೆ: ಗಂಗಾ ಮೆಡಿಕಲ್ ಸ್ಟೋರ್ಸ್, ಹುಮನಾಬಾದ್ ತಾಲ್ಲೂಕು, ಬೀದರ್ ಸಂಸ್ಥೆಯವರು ಅವಧಿ ಮುಗಿದ ಔಷಧವನ್ನು ದಾಸ್ತಾನು ಮಾಡಿದ್ದಕ್ಕಾಗಿ ಸಂಸ್ಥೆಯ ಪರವಾನಿಗೆಗಳನ್ನು 08 ದಿನಗಳ ಕಾಲ ಅಮಾನತ್ತುಗೊಳಿಸಿ ಇಲಾಖಾ ಕ್ರಮವನ್ನು ಜರುಗಿಸಲಾಗಿದೆ. ಇ) ಮೆ: ರಾಹುಲ್ ಮೆಡಿಕಲ್ ಮತ್ತು ಜನರಲ್ ಸ್ಟೋರ್ಸ್, ವಿಜಯನಗರ, ಹುಬ್ಬಳ್ಳಿ ಸಂಸ್ಥೆಯವರು ಅವಧಿ ಮುಗಿದ ಔಷಧವನ್ನು ಮಾರಾಟ ಮಾಡಿದ್ದು, ಸದರಿ ಸಂಸ್ಥೆಯ ವಿರುದ್ಧ ಮಾನ್ಯ ನ್ಯಾಯಾಲಯದಲ್ಲಿ ಮೊಕದ್ದಮೆ ಹೂಡುವ ಪ್ರಕ್ರಿಯೆ ಪ್ರಗತಿಯಲ್ಲಿದೆ. ಈ) ಮೆ: ಚೇತನ ಆಸ್ಪತ್ರೆ, ಪುತ್ತೂರು, ಮಂಗಳೂರು ಸಂಸ್ಥೆಯವರು ಅವಧಿ ಮುಗಿದ ಔಷಧವನ್ನು ಮಾರಾಟ ಮಾಡಿದ್ದು, ಸದರಿ ಸಂಸ್ಥೆಯ ವಿರುದ್ಧ ಮೊಕದ್ದಮೆ ಹೂಡುವ ಪ್ರಕ್ರಿಯೆಯು ಪ್ರಗತಿಯಲ್ಲಿದೆ. ಔಷಧ ನಿಯಂತ್ರಣ ಇಲಾಖೆಯ ಅಮಲುಜಾರಿ ಅಧಿಕಾರಿಗಳು ರಾಜ್ಯದ ಎಲ್ಲಾ ಔಷಧ ಮಳಿಗೆಗಳಲ್ಲಿ ಅವಧಿ ಮುಗಿದ ಔಷಧವನ್ನು ವಿಲೇವಾರಿ ಮಾಡುವ ಬಗ್ಗೆ ಔಷಧ ಮಾರಾಟಗಾರರಿಗೆ ನಿರಂತರ ಕಲಿಕಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿರುತ್ತಾರೆ.

ಆಕುಕ 193 ಐಎಂಇ 2020

(ಬಿ.ಶ್ರೀರಾಮುಲು)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ		1436
ಸದಸ್ಯರ ಹೆಸರು		ಶ್ರೀ ಈಶ್ವರ್ ಖಂಡ್ರೆ (ಭಾಲ್ಕಿ)
ಉತ್ತರಿಸಬೇಕಾದ ದಿನಾಂಕ		24-09-2020
ಉತ್ತರಿಸಬೇಕಾದ ಸಚಿವರು		ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ)
ಪ್ರಶ್ನೆ		ಉತ್ತರ
ಅ)	ರಾಜ್ಯದಲ್ಲಿ ವಿವಿಧ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವೇತನ ಅನುದಾನಕ್ಕೆ ಒಳಪಟ್ಟ ಬೋಧಕ ಸಿಬ್ಬಂದಿಗಳು ನಿವೃತ್ತಿ, ನಿಧನ ರಾಜೀನಾಮೆ ಮತ್ತು ಇತರೆ ಕಾರಣಗಳಿಂದ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಪ್ರಕ್ರಿಯೆಯನ್ನು ಕೋವಿಡ್-19ರ ಹಿನ್ನಲೆಯಲ್ಲಿ ಸ್ಥಗಿತಗೊಳಿಸಿರುವುದು ನಿಜವೇ;	ನಿಜ. ಸರ್ಕಾರದ ಪತ್ರ ಸಂಖ್ಯೆ:ಇಡಿ 240 ಯುಪಿಸಿ 2014, ದಿನಾಂಕ: 01-09-2017 ರಲ್ಲಿ ದಿನಾಂಕ:31-12-2015 ರೊಳಗೆ ನಿವೃತ್ತಿ, ಮರಣ, ರಾಜೀನಾಮೆ ಹಾಗೂ ಇತರೆ ಕಾರಣಗಳಿಂದ ಖಾಲಿ ಇರುವ ಬೋಧಕ ಹುದ್ದೆಗಳನ್ನು ನಿಯಮಾನುಸಾರ ಭರ್ತಿ ಮಾಡಿಕೊಳ್ಳಲು ಅನುಮತಿ ನೀಡಲಾಗಿದ್ದು, ಅದರಂತೆ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗುತ್ತಿತ್ತು. ಆದರೆ, ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ:ಆಇ 157 ವೆಚ್ಚ-8/2020, ದಿನಾಂಕ:10-06-2020 & ಆಇ/3/ಬಿಇಎಂ/2020, ದಿನಾಂಕ:06-07-2020 ರನ್ವಯ ಕೋವಿಡ್-19ರ ಹಿನ್ನಲೆಯಲ್ಲಿ ರಾಜ್ಯದಲ್ಲಿ ತೀವ್ರ ಆರ್ಥಿಕ ಸಂಕಷ್ಟ ಸೃಷ್ಟಿಯಾಗಿರುವುದರಿಂದ, ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು 2020-21ನೇ ಸಾಲಿನಲ್ಲಿ ಭರ್ತಿ ಮಾಡುವಂತಿಲ್ಲ, ಖಾಲಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಹೊಸದಾಗಿ ಸಹಮತಿ ನೀಡುವಂತಿಲ್ಲ, ಹುದ್ದೆಗಳನ್ನು ವೇತನಾನುದಾನಕ್ಕೆ ಒಳಪಡಿಸುವಂತಿಲ್ಲ, ಕಲ್ಯಾಣ ಕರ್ನಾಟಕ ವೃಂದದ ಹುದ್ದೆಗಳು ಮತ್ತು ಬ್ಯಾಕ್‌ಲಾಗ್ ಹುದ್ದೆಗಳೂ ಸೇರಿದಂತೆ ಎಲ್ಲಾ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವುದನ್ನು ಮುಂದಿನ ಆದೇಶದವರೆಗೆ ತಡೆಹಿಡಿಯಲಾಗಿದೆ. ಈ ಹಿನ್ನಲೆಯಲ್ಲಿ ಬೋಧಕರ ಖಾಲಿ ಹುದ್ದೆಗಳ ಭರ್ತಿ ಬಗ್ಗೆ ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ.
ಆ)	ಹಾಗಿದ್ದಲ್ಲಿ, ಸುಮಾರು ವರ್ಷಗಳಿಂದ ಬೋಧಕರ ಹುದ್ದೆಗಳು ಖಾಲಿ ಇರುವುದರಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿ ಕುಂಠಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.

ಇ)	ರಾಜ್ಯದ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಈ ಆದೇಶವನ್ನು ಹಿಂಪಡೆದು ಖಾಲಿ ಇರುವ ಬೋಧಕರ ಹುದ್ದೆಗಳನ್ನು ವೇತನ ಅನುದಾನಕ್ಕೆ ಒಳಪಡಿಸಲು ಸರ್ಕಾರ ಆದೇಶಿಸುವುದೇ?	ಆರ್ಥಿಕ ಇಲಾಖೆಯ ಮುಂದಿನ ಆದೇಶವನ್ನು ನಿರೀಕ್ಷಿಸಿದೆ.

ಇಡಿ 131 ಯುಪಿಸಿ 2020

(ಡಾ: ಅಶ್ವಥ್ ನಾರಾಯಣ ಸಿ.ಎನ್.)
ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ)

ಕರ್ನಾಟಕ ವಿಧಾನ ಸಭೆ

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1443
2. ಮಾನ್ಯ ಸದಸ್ಯರ ಹೆಸರು : ಶ್ರೀ ಖಾದರ್ ಯು.ಟಿ (ಮಂಗಳೂರು)
3. ಉತ್ತರಿಸಬೇಕಾದ ದಿನಾಂಕ : 24/09/2020
4. ಉತ್ತರಿಸುವವರು : ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು

ಕ್ರಸಂ.	ಪ್ರಶ್ನೆ	ಉತ್ತರ
(ಅ)	ರಾಜ್ಯದಲ್ಲಿ ಕಾರ್ಮಿಕ ಇಲಾಖೆಯಿಂದ ವಲಸೆ ಕಾರ್ಮಿಕರನ್ನು ಗುರುತಿಸಲಾಗಿದೆಯೇ: (ತಾಲ್ಲೂಕುವಾರು ವಿವರ ಒದಗಿಸುವುದು)	ಕಾರ್ಮಿಕ ಇಲಾಖೆಯಿಂದ ವಲಸೆ ಕಾರ್ಮಿಕರನ್ನು ಗುರುತಿಸಲು ಯಾವುದೇ ಸಮೀಕ್ಷೆ ನಡೆದಿರುವುದಿಲ್ಲ.
(ಆ)	ಲಾಕ್‌ಡೌನ್ ಅವಧಿಯಲ್ಲಿ ಸಂಕಷ್ಟಕ್ಕೆ ಒಳಗಾದ ವಲಸೆ ಕಾರ್ಮಿಕರಿಗೆ ಯಾವ ರೀತಿಯ ಪರಿಹಾರವನ್ನು ಒದಗಿಸಲಾಗಿದೆ: (ವಿವರಗಳನ್ನು ಒದಗಿಸುವುದು)	ಲಾಕ್‌ಡೌನ್ ಅವಧಿಯಲ್ಲಿ ಸಂಕಷ್ಟಕ್ಕೆ ಒಳಗಾದ ವಲಸೆ ಕಾರ್ಮಿಕರಿಗೆ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ವಿವಿಧ ರೀತಿಯ ಪರಿಹಾರವನ್ನು ನೀಡಲಾಗಿರುತ್ತದೆ. ವಿವರಗಳು ಈ ಕೆಳಕಂಡಂತೆ ಇರುತ್ತವೆ. • ಲಾಕ್‌ಡೌನ್ ಸಂದರ್ಭದಲ್ಲಿ ವಲಸೆ ಕಾರ್ಮಿಕರು ಸೇರಿದಂತೆ ಕಟ್ಟಡ ಕಾರ್ಮಿಕರು ಮತ್ತು ಅಸಂಘಟಿತ ಕಾರ್ಮಿಕರಿಗೆ 89,86,533 ಸಿದ್ದಪಡಿಸಿದ ಆಹಾರದ ಪ್ಯಾಕೆಟ್‌ಗಳನ್ನು ಹಾಗೂ 6,08,000 ಆಹಾರ ಸಾಮಾಗ್ರಿಗಳ ಕಿಟ್‌ಗಳನ್ನು ವಿತರಿಸಲಾಗಿರುತ್ತದೆ. • ಲಾಕ್‌ಡೌನ್ ಅವಧಿಯಲ್ಲಿ ಸಂಕಷ್ಟಕ್ಕೆ ಒಳಗಾದ ವಲಸೆ ಕಾರ್ಮಿಕರ ಸಹಿತ ಮಂಡಳಿಯ ಫಲಾನುಭವಿಗಳಾಗಿ ನೋಂದಾಯಿತರಾದ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ತಲಾ ರೂ.5,000/- ಗಳ ಪರಿಹಾರವನ್ನು ಸರ್ಕಾರ ಘೋಷಣೆ ಮಾಡಿದ್ದು ಮಂಡಳಿಯಿಂದ 16,48,431 ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ಈ ಸೌಲಭ್ಯವನ್ನು ಪಡೆದಿರುತ್ತಾರೆ. • ಕಟ್ಟಡ ಮತ್ತು ವಲಸೆ ಕಟ್ಟಡ ಕಾರ್ಮಿಕರಿಗೆ ಕೋರೋನಾ ವೈರಸ್ ಬಗ್ಗೆ ಅರಿವು ಮೂಡಿಸಲು ಮತ್ತು ಮಾಸ್ಕ್, ಸ್ಯಾನಿಟೈಸರ್ ಹಾಗೂ ಸೋಪುಗಳನ್ನು ವಿತರಣೆ ಮಾಡಲು 41 ಉಪ ವಿಭಾಗ ಮಟ್ಟದ ಕಾರ್ಮಿಕ ಅಧಿಕಾರಿಗಳಿಗೆ ಪ್ರತಿ ಉಪ ವಿಭಾಗಕ್ಕೆ ರೂ.10 ಲಕ್ಷಗಳನ್ನು ಬಿಡುಗಡೆ ಮಾಡಲಾಗಿರುತ್ತದೆ.

		• ಕಟ್ಟಡ ಮತ್ತು ವಲಸೆ ಕಟ್ಟಡ ಕಾರ್ಮಿಕರಿಗೆ ಆಹಾರ ಒದಗಿಸಲು ಮತ್ತು ಅವರ ಸಮಸ್ಯೆಗಳನ್ನು ಆಲಿಸಲು 24X7 ಸಹಾಯವಾಣಿ (155214) ಯನ್ನು ಸ್ಥಾಪಿಸಲಾಗಿರುತ್ತದೆ. • ವಸತಿ ರಹಿತ ಕಟ್ಟಡ ಮತ್ತು ವಲಸೆ ಕಟ್ಟಡ ಕಾರ್ಮಿಕರಿಗೆ ಜಿಲ್ಲಾಡಳಿತದ ಸಹಕಾರದೊಂದಿಗೆ ವಸತಿ ಸೌಲಭ್ಯ ಮತ್ತು ಊಟವನ್ನು ಒದಗಿಸಲಾಗಿರುತ್ತದೆ. • ವಲಸೆ/ಕಟ್ಟಡ ನಿರ್ಮಾಣ ಕಾರ್ಮಿಕರುಗಳು ಲಾಕ್‌ಡೌನ್ ಸಂದರ್ಭದಲ್ಲಿ ತಮ್ಮ ತವರು ರಾಜ್ಯಗಳಿಗೆ ಶ್ರಮಿಕ್ ರೈಲುಗಳ ಮೂಲಕ ಪ್ರಯಾಣಿಸಿದ ಸಂದರ್ಭದಲ್ಲಿ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ವತಿಯಿಂದ ಸಿದ್ಧಪಡಿಸಿದ ಊಟ, ಬೇಯಿಸಿದ ಮೊಟ್ಟೆ, ಹಣ್ಣುಗಳು, ನೀರಿನ ಬಾಟಲ್ ಮತ್ತು ಮಜ್ಜಿಗೆ ಇತ್ಯಾದಿ ಪದಾರ್ಥಗಳನ್ನು ಉಚಿತವಾಗಿ ಒದಗಿಸಲಾಗಿದೆ.
(ಇ)	ಕೇಂದ್ರ ಸರ್ಕಾರದಿಂದ ವಲಸೆ ಕಾರ್ಮಿಕರಿಗೆ ರೂಪಿಸಿದ ನೀತಿ–ನಿಯಮಗಳೇನು ಹಾಗೂ ಅದನ್ನು ಅನುಷ್ಠಾನಗೊಳಿಸುವುದಲ್ಲಿ ರಾಜ್ಯ ಸರ್ಕಾರ ಕೈಗೊಂಡ ಕ್ರಮಗಳೇನು: (ವಿವರಗಳನ್ನು ಒದಗಿಸುವುದು)	ಕೇಂದ್ರ ಸರ್ಕಾರವು ಕೋವಿಡ್–19 ಲಾಕ್‌ಡೌನ್ ಸಮಯದಲ್ಲಿ ವಲಸೆ ಕಾರ್ಮಿಕರಿಗೆ ಸಂಬಂಧಿಸಿದಂತೆ ಕಾಲಕಾಲಕ್ಕೆ ಹೊರಡಿಸಿದ ಮಾರ್ಗಸೂಚಿ, ನಿಯಮಗಳನ್ನು ನಿರ್ವಹಿಸಲಾಗಿರುತ್ತದೆ.
(ಈ)	ಪರಿಹಾರ ದೊರೆಯದೇ ಅಥವಾ ಸಂಕಷ್ಟಕ್ಕೆ ಸಿಲುಕಿದ ಕುಟುಂಬಗಳನ್ನು ರಾಜ್ಯದಲ್ಲಿ ಉಳಿಸಿಕೊಳ್ಳಲು ಸಾಧ್ಯವಾಗದೇ ಸ್ವಗ್ರಾಮಗಳಿಗೆ ತೆರಳಿದ ಕುಟುಂಬಗಳೆಷ್ಟು? (ವಿವರಗಳನ್ನು ಒದಗಿಸುವುದು)	ಲಾಕ್‌ಡೌನ್ ಜಾರಿಯಾದ ಸಂದರ್ಭದಲ್ಲಿ ಸಂಕಷ್ಟಕ್ಕೆ ಸಿಲುಕಿದ 4,66,582 ವಲಸೆ ಕಾರ್ಮಿಕರನ್ನು ತಮ್ಮ ಸ್ವಂತ ಊರುಗಳಿಗೆ ವಿಶೇಷ ರೈಲುಗಳ ಮೂಲಕ ಉಚಿತವಾಗಿ ಹಿಂದಿರುಗಲು ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಂಡಿರುತ್ತದೆ.

ಕಾಇ 321 ಎಲ್‌ಇಟಿ 2020

(ಅರಬೈಲ್ ಶಿವರಾಂ ಹೆಬ್ಬಾರ್)
ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1448

ಸದಸ್ಯರ ಹೆಸರು : **ಶ್ರೀ ಕುಮಾರಸ್ವಾಮಿ ಹೆಚ್.ಕೆ (ಸಕಲೇಶಪುರ)**

ಉತ್ತರಿಸುವ ದಿನಾಂಕ : 24.09.2020

ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ಸರ್ಕಾರಿ ಆದೇಶ ಸಂಖ್ಯೆ: ಇಡಿ 80/ ಹೆಚ್‌ಪಿಸಿ/2020, ದಿನಾಂಕ:20.7.2020ರಲ್ಲಿ ಹಾಸನ ಜಿಲ್ಲೆಯ ಸಕಲೇಶಪುರ ತಾಲ್ಲೂಕು ಹೆತ್ತೂರು ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಬೇಲೂರು ತಾಲ್ಲೂಕು ಅರೇಹಳ್ಳಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಅರಕಲಗೂಡು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಹಳ್ಳಿಮೈಸೂರು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳನ್ನು ಬೆಂಗಳೂರಿಗೆ ಸ್ಥಳಾಂತರಿಸಿರುವುದು ನಿಜವೇ:	ಹೌದು
ಆ)	ಸದರಿ ಕಾಲೇಜುಗಳ ಮಲೆನಾಡು ಭಾಗಗಳಲ್ಲಿ ಕಾಡಾನೆ ಮತ್ತಿತರ ಕಾಡುಪ್ರಾಣಿಗಳ ಹಾವಳಿ ಇದ್ದು, ಸದರಿ ಕಾಲೇಜುಗಳನ್ನು ಬೇರೆಡೆಗೆ ಸ್ಥಳಾಂತರಿಸಲು ಕಾರಣಗಳೇನು; (ಸಂಪೂರ್ಣ ಮಾಹಿತಿ ನೀಡುವುದು)	ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಾದ ಹೆತ್ತೂರು, ಅರೇಹಳ್ಳಿ, ಹಾಗೂ ಹಳ್ಳಿಮೈಸೂರು, ಈ ಕಾಲೇಜುಗಳಲ್ಲಿ ಕಳೆದ ಮೂರು ಶೈಕ್ಷಣಿಕ ವರ್ಷಗಳಲ್ಲಿ ವಿದ್ಯಾರ್ಥಿಗಳ ಪ್ರವೇಶಾತಿಯು ಗಣನೀಯವಾಗಿ ಇಳಿಮುಖವಾಗುತ್ತಿದ್ದು, 100ಕ್ಕಿಂತ ಕಡಿಮೆ ವಿದ್ಯಾರ್ಥಿಗಳು ಪ್ರವೇಶಾತಿ ಹೊಂದಿರುತ್ತದೆ ಹಾಗೂ ಬಹುತೇಕ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪೂರಕ ಪದವಿ ಪೂರ್ವ ಕಾಲೇಜುಗಳ ಕೊರತೆಯಿರುವುದರಿಂದ ವಿದ್ಯಾರ್ಥಿಗಳ ಪ್ರವೇಶಾತಿ ಕಡಿಮೆಯಾಗುತ್ತಿದ್ದು, ಆ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುವ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ಸೇವೆಯನ್ನು ಸಮರ್ಪಕವಾಗಿ ಬಳಸಿಕೊಳ್ಳಲು ಇಲಾಖೆಗೆ ಸಾಧ್ಯವಾಗದಾಗಿದೆ. ಮೇಲೆ ತಿಳಿಸಿರುವ ಪ್ರವೇಶಾತಿ ಕಡಿಮೆ ಇರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳನ್ನು ಅವಶ್ಯಕತೆಗನುಸಾರವಾಗಿ ಬೇರೆಡೆಗೆ ಸ್ಥಳಾಂತರಿಸಿದಲ್ಲಿ ಹೆಚ್ಚಿನ ವಿದ್ಯಾರ್ಥಿಗಳನ್ನು ಆಕರ್ಷಿಸುವುದಲ್ಲದೇ ಲಭ್ಯವಿರುವ ಮೂಲಭೂತ ಸೌಲಭ್ಯಗಳನ್ನು ಬಳಸಿಕೊಳ್ಳಲು ಸಹಾಯವಾಗುವುದು ಜೊತೆಗೆ ಸದರಿ ಕಾಲೇಜುಗಳ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳನ್ನು ಇತರೆ ಕಾಲೇಜುಗಳಿಗೆ ಸಮರ್ಪಕವಾಗಿ ಬಳಸಿಕೊಳ್ಳುವ ದೃಷ್ಟಿಯಿಂದ ಸ್ಥಳಾಂತರಿಸಲಾಗಿದೆ.

ಇ)	ಮೇಲ್ಕಂಡ ಕಾಲೇಜುಗಳನ್ನು ಹಾಲಿ ಇರುವ ಜಾಗದಲ್ಲಿಯೇ ಮುಂದುವರೆಸಲು ಸ್ಥಳೀಯ ಶಾಸಕರುಗಳು ಸರ್ಕಾರಕ್ಕೆ ಮನವಿ ಪತ್ರಗಳನ್ನು ಸಲ್ಲಿಸಿರುವುದು ನಿಜವೇ; ಆದರೂ ಸಹ ಸರ್ಕಾರ ಈವರೆವಿಗೂ ಸದರಿ ಕಾಲೇಜುಗಳನ್ನು ಮುಂದುವರಿಸಲು ಯಾವುದೇ ಆದೇಶ ಹೊರಡಿಸದೆ ಇರಲು ಕಾರಣಗಳೇನು;	ಹೌದು ಮೇಲ್ಕಂಡ ಕಾರಣಗಳಿಂದ ಸ್ಥಳಾಂತರಿಸಲಾಗಿದೆ.
ಈ)	ಸಕಲೇಶಪುರ ತಾಲ್ಲೂಕು ಹೆತ್ತೂರು ಸರ್ಕಾರಿ ಪ್ರಥಮದರ್ಜೆ ಕಾಲೇಜನ್ನು ಬೇರೆಡೆಗೆ ವರ್ಗಾಯಿಸುವ ಬಗ್ಗೆ ಮಾನ್ಯ ಉಚ್ಚನ್ಯಾಯಾಲಯದ ರಿಟ್ ಪಿಟಿಷನ್ 9472/2020 31/08/2020ರಲ್ಲಿ ತಡೆಯಾಜ್ಞೆ ಬಂದಿರುವುದು ನಿಜವೇ ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣ ಮಾಹಿತಿ ನೀಡುವುದು)	ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಹೆತ್ತೂರನ್ನು ಸ್ಥಳಾಂತರಿಸಲಾಗಿರುವ ಸಂಬಂಧ ಮಾನ್ಯ ಉಚ್ಚ ನ್ಯಾಯಾಲಯ (ಬೆಂಗಳೂರು) ಇಲ್ಲಿ ರಿಟ್ ಅರ್ಜಿ ಸಂಖ್ಯೆ: 9472/2020(EDN) ದಾಖಲಾಗಿದ್ದು, ದಿನಾಂಕ: 31.08.2020ರ ಮಧ್ಯಂತರ ಆದೇಶದಲ್ಲಿ ಮಾನ್ಯ ಉಚ್ಚ ನ್ಯಾಯಲಯವು ತಡೆಯಾಜ್ಞೆ ನೀಡಿರುತ್ತದೆ. ಮಾನ್ಯ ನ್ಯಾಯಾಲಯಕ್ಕೆ ಸದರಿ ಕಾಲೇಜಿನ ಸ್ಥಳಾಂತರವು ಸದುದ್ದೇಶದಿಂದ ಮಾಡಿರುವ ಬಗ್ಗೆ ಮಾನ್ಯ ನ್ಯಾಯಾಲಯದ ಗಮನಕ್ಕೆ ತಂದು ತಡೆಯಾಜ್ಞೆಯನ್ನು ತೆರವುಗೊಳಿಸಲು ಕ್ರಮವಹಿಸಲಾಗುತ್ತಿದೆ ಹಾಗೂ ಮಾನ್ಯ ನ್ಯಾಯಾಲಯದ ಅಂತಿಮ ಆದೇಶದಂತೆ ಕ್ರಮವಹಿಸಲಾಗುವುದು. ಮಾನ್ಯ ಉಚ್ಚ ನ್ಯಾಯಾಲಯದ ತಡೆಯಾಜ್ಞೆಯಂತೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಹೆತ್ತೂರು, ಸಕಲೇಶಪುರ ತಾಲ್ಲೂಕು, ಹಾಸನ ಜಿಲ್ಲೆ ಇಲ್ಲಿ ಶೈಕ್ಷಣಿಕ ಚಟುವಟಿಕೆಗಳನ್ನು ಮುಂದುವರೆಸುವ ಬಗ್ಗೆ ನಿಯಮಾನುಸಾರ ಪರಿಶೀಲಿಸಿ ಕ್ರಮಕೈಗೊಳ್ಳುವಂತೆ ಪ್ರಾಂಶುಪಾಲರಿಗೆ ಸೂಚಿಸಲಾಗಿದೆ.

ಕಡತ ಸಂಖ್ಯೆ: ಇಡಿ 148 ಹೆಚ್‌ಪಿಸಿ 2020

(ಡಾ: ಅಶ್ವಥ್ ನಾರಾಯಣ ಸಿ.ಎನ್)

ಉಪ ಮುಖ್ಯಮಂತ್ರಿಗಳು ಹಾಗೂ
ಉನ್ನತ ಶಿಕ್ಷಣ ಸಚಿವರು

ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ 7ನೇ ಅಧಿವೇಶನ)

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1461

2) ಸದಸ್ಯರ ಹೆಸರು : ಶ್ರೀ ಎಸ್.ಎನ್. ನಾರಾಯಣಸ್ವಾಮಿ ಕೆ.ಎಂ (ಬಂಗಾರಪೇಟೆ)

3) ಉತ್ತರಿಸುವ ದಿನಾಂಕ : 24-09-2020

4) ಉತ್ತರಿಸುವವರು : ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು

<table>
<tr><th>ಕ್ರಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಬಂಗಾರಪೇಟೆ ವಿಧಾನಸಭಾ ವ್ಯಾಪ್ತಿಯಲ್ಲಿ ಸತತವಾಗಿ ಪ್ರತಿ ವರ್ಷ 3 ರಿಂದ 5 ಮಂದಿ ರೈತಾಪಿ ವರ್ಗದ ಜನರು ಆನೆ ದಾಳಿಗೆ ಪ್ರಾಣ ತೆತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ಹೌದು.</td></tr>
<tr><td>ಆ)</td><td>ಆನೆ ಹಾವಳಿ ತಪ್ಪಿಸಲು ರಾಜ್ಯ ಆಯವ್ಯಯದಲ್ಲಿ ನಿಗದಿಪಡಿಸಿದ ಅನುದಾನ ಎಷ್ಟು ಮತ್ತು ಹಂಚಿಕೆಯಾದ ಅನುದಾನದ ವಿವರವನ್ನು ಒದಗಿಸುವುದು;</td><td>ಕಾಡಾನೆ ಒಳಗೊಂಡಂತೆ ವನ್ಯಪ್ರಾಣಿ ಹಾವಳಿ ನಿಯಂತ್ರಿಸಲು ಕಳೆದ ಮೂರು ವರ್ಷಗಳಲ್ಲಿ ವಿವಿಧ ಲೆಕ್ಕಶೀರ್ಷಿಕೆಯಡಿ ಹಂಚಿಕೆ ಮಾಡಿ ಬಿಡುಗಡೆ ಮಾಡಿದ ಅನುದಾನದ ವಿವರ ಈ ಕೆಳಕಂಡಂತಿದೆ:
(ರೂ. ಲಕ್ಷಗಳಲ್ಲಿ)
<table>
<tr><th rowspan="2">ವರ್ಷ</th><th colspan="2">ಮಾನವ-ವನ್ಯಪ್ರಾಣಿ ಸಂಘರ್ಷ ನಿಯಂತ್ರಣ</th><th colspan="2">ಆನೆ ಯೋಜನೆ</th></tr>
<tr><th>ಹಂಚಿಕೆ</th><th>ಬಿಡುಗಡೆ</th><th>ಹಂಚಿಕೆ</th><th>ಬಿಡುಗಡೆ</th></tr>
<tr><td>2018-19</td><td>12,612.00</td><td>8,724.00</td><td>515.510</td><td>515.51</td></tr>
<tr><td>2019-20</td><td>8,492.00</td><td>8,413.67</td><td>614.180</td><td>614.18</td></tr>
<tr><td>2020-21 (ಈವರೆಗೆ)</td><td>7,015.00</td><td>3,507.50</td><td>881.735</td><td>500.00</td></tr>
</table></td></tr>
<tr><td>ಇ)</td><td>ಆನೆ ದಾಳಿ ಹಾವಳಿಯನ್ನು ಶಾಶ್ವತವಾಗಿ ತಪ್ಪಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ?
(ವಿವರಗಳನ್ನು ಒದಗಿಸುವುದು)</td><td>ಕಾಡಾನೆ ಒಳಗೊಂಡಂತೆ ವನ್ಯಪ್ರಾಣಿ ಹಾವಳಿ ನಿಯಂತ್ರಿಸಲು ಇಲಾಖಾವತಿಯಿಂದ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.
1. ಕಾಡುಪ್ರಾಣಿಗಳು ಅರಣ್ಯ ಪ್ರದೇಶದಂಚಿನಲ್ಲಿರುವ ಕೃಷಿ ಹಾಗೂ ಸಾರ್ವಜನಿಕರ ಸ್ಥಳಗಳಲ್ಲಿ ದಾಳಿ ಮಾಡುವುದನ್ನು ತಡೆಗಟ್ಟುವ ಸಲುವಾಗಿ ಸೂಕ್ಷ್ಮ ಪ್ರದೇಶಗಳ ಅರಣ್ಯದಂಚಿನಲ್ಲಿ ಕಾಡಾನೆ ನಿರೋಧಕ ಕಂದಕ ಮತ್ತು ಸೌರಶಕ್ತಿ ಬೇಲಿ ನಿರ್ಮಿಸಿ ನಿರ್ವಹಿಸಲಾಗುತ್ತಿದೆ.
2. ಕಾಡಂಚಿನ ಸೂಕ್ಷ್ಮ ಪ್ರದೇಶಗಳಲ್ಲಿ ಕಾಡಾನೆಗಳು ಕಾಡಿನಿಂದ ಹೊರಗೆ ಹೋಗದಂತೆ ತಡೆಗಟ್ಟಲು ಉಪಯೋಗಿಸಿದ ರೈಲ್ವೆ ಹಳಿಗಳನ್ನು ಉಪಯೋಗಿಸಿ ಬ್ಯಾರಿಕೇಡ್ ನಿರ್ಮಿಸುವ ಕಾಮಗಾರಿಯನ್ನು ಕೈಗೊಳ್ಳಲಾಗಿದೆ.
3. ಅರಣ್ಯ ಪ್ರದೇಶಗಳಲ್ಲಿ ವನ್ಯ ಪ್ರಾಣಿಗಳಿಗೆ ವರ್ಷವಿಡೀ ಕುಡಿಯುವ ನೀರು ದೊರಕುವಂತೆ ಅರಣ್ಯದಲ್ಲಿರುವ ಕೆರೆಗಳ ಹೂಳು ತೆಗೆಯುವುದು, ಗಲ್ಲಿಪ್ಲಗ್, ಚೆಕ್‌ಡ್ಯಾಮ್, ನಾಲಾಬಂದ್ ಇತ್ಯಾದಿ ಕೆಲಸಗಳನ್ನು ರಕ್ಷಿತಾರಣ್ಯಗಳಲ್ಲಿ ಕೈಗೊಳ್ಳಲಾಗುತ್ತಿದೆ. ಅಲ್ಲದೇ ಬೋರ್‌ವೆಲ್‌ಗಳನ್ನು ಕೊರೆದು ಸೋಲಾರ್ ಪಂಪ್‌ಗಳನ್ನು ಅಳವಡಿಸಿ ನೀರಿನ ಹೊಂಡಗಳನ್ನು ತುಂಬಲಾಗುತ್ತಿದೆ.
4. ಕಾಡಾನೆಗಳ/ವನ್ಯಜೀವಿಗಳ ಹಾವಳಿ ಹೆಚ್ಚಾಗಿ ಕಂಡುಬರುವ ಸೂಕ್ಷ್ಮ ಪ್ರದೇಶಗಳಲ್ಲಿ ಅವಶ್ಯಕತೆಗನುಗುಣವಾಗಿ Anti Depredation Camp ಗಳನ್ನು ರಚಿಸಿ ಆನೆಗಳನ್ನು ಹಿಮ್ಮೆಟ್ಟಿಸುವ ಕಾರ್ಯ ಕೈಗೊಳ್ಳಲಾಗುತ್ತಿದೆ. ಹಾಗೂ Rapid Response Teams(RRT) ತಂಡಗಳನ್ನು ರಚಿಸಿ ವನ್ಯಜೀವಿಗಳ ಹಾವಳಿ ನಿಯಂತ್ರಿಸಲಾಗುತ್ತಿದೆ.</td></tr>
</table>

		5. ಕಾಡಾನೆಗಳ ಚಲನ-ವಲನ ಮಾಹಿತಿಯನ್ನು ಸಂಗ್ರಹಿಸಲು 24 ಗಂಟೆ ಕಾರ್ಯನಿರ್ವಹಿಸುವ ಮಾಹಿತಿ ಕೇಂದ್ರ ಸ್ಥಾಪಿಸಲಾಗಿದ್ದು, ಅದರಂತೆ ಸಾರ್ವಜನಿಕರಿಗೆ ಎಚ್ಚರಿಕೆ ವಹಿಸಲು ಮಾಹಿತಿ ನೀಡಲಾಗುತ್ತಿದೆ. 6. ಆನೆಗಳ ಹಾವಳಿ ಹೆಚ್ಚಾಗಿರುವ ಪ್ರದೇಶಗಳಲ್ಲಿ ಆನೆ ಗುಂಪುಗಳ ಒಂದೊಂದು ಗುಂಪಿನ ಒಂದು ವಯಸ್ಕ ಹೆಣ್ಣಾನೆಗೆ ರೇಡಿಯೋಕಾಲರ್ ಅಳವಡಿಸಿ, 24 ಗಂಟೆ ಆನೆ ಹಿಂಡಿನ ಚಲನ-ವಲನಗಳ ಮೇಲೆ ನಿಗಾವಹಿಸಿ, ಸದರಿ ಆನೆಗಳು ಯಾವಯಾವ ಪ್ರದೇಶಗಳಲ್ಲಿ ಚಲಿಸುತ್ತಿವೆ ಎಂಬ ವಿಷಯವನ್ನು ಎಸ್.ಎಂ.ಎಸ್./ವಾಟ್ಸ್‌ಅಪ್ ಮೂಲಕ ಸ್ಥಳೀಯ ಜನರಿಗೆ ಆಗಿಂದ್ದಾಗ್ಗೆ ಮಾಹಿತಿ ನೀಡಲಾಗುತ್ತಿದ್ದು, ಇದರಿಂದ ಸಾರ್ವಜನಿಕರು ಕಾಡಾನೆ ಇರುವ ಬಗ್ಗೆ ಮಾಹಿತಿ ಪಡೆದು ಆ ಪ್ರದೇಶಗಳಲ್ಲಿ ಎಚ್ಚರಿಕೆಯಿಂದ ಇರಬಹುದು. 7. ಸಾರ್ವಜನಿಕರಿಗೆ ನಿರಂತರವಾಗಿ ಉಪಟಳ ನೀಡುತ್ತಿರುವ ಕಾಡಾನೆಗಳನ್ನು ಗುರ್ತಿಸಿ ಆಗಿಂದಾಗ್ಗೆ ಸೆರೆಹಿಡಿದು ಆನೆ ಶಿಬಿರಗಳಿಗೆ ಸ್ಥಳಾಂತರಿಸಲಾಗುತ್ತಿದೆ. 8. ರಾಜ್ಯದ ಅರಣ್ಯದಂಚಿನಲ್ಲಿ ಬರುವಂತಹ ಹಿಡುವಳಿ ಜಮೀನುಗಳಲ್ಲಿ ರೈತರು ಬೆಳೆದ ಬೆಳೆಗಳನ್ನು ವನ್ಯಪ್ರಾಣಿಗಳ ದಾಳಿಯಿಂದ ರಕ್ಷಿಸಲು ಸೌರಶಕ್ತಿ ಬೇಲಿ ನಿರ್ಮಿಸಿಕೊಳ್ಳುವ ರೈತರಿಗೆ ಶೇ. 50 ರಷ್ಟು ಸಹಾಯಧನ ಸೌಲಭ್ಯವನ್ನು ಒದಗಿಸುವ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆ.

ಸಂಖ್ಯೆ: ಅಪಜೀ 154 ಎಫ್‌ಡಬ್ಲ್ಯೂಎಲ್ 2020

(ಆನಂದ್ ಸಿಂಗ್)
ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು

ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ 7ನೇ ಅಧಿವೇಶನ)

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1463
2) ಸದಸ್ಯರ ಹೆಸರು	:	ಶ್ರೀ ಪುಟ್ಟರಂಗಶೆಟ್ಟಿ .ಸಿ (ಚಾಮರಾಜನಗರ)
3) ಉತ್ತರಿಸುವ ದಿನಾಂಕ	:	24-09-2020
4) ಉತ್ತರಿಸುವವರು	:	ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿರುವ ಒಟ್ಟಾರೆ ರಾಷ್ಟ್ರೀಯ ಉದ್ಯಾನವನಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)	ರಾಜ್ಯದಲ್ಲಿ ಒಟ್ಟು ಐದು ರಾಷ್ಟ್ರೀಯ ಉದ್ಯಾನವನಗಳಿದ್ದು, ಜಿಲ್ಲಾವಾರು ವಿವರ ಈ ಕೆಳಕಂಡಂತಿದೆ:
ಆ)	ರಾಷ್ಟ್ರೀಯ ಉದ್ಯಾನವನಗಳಿಗೆ ಕೇಂದ್ರ ಸರ್ಕಾರದಿಂದ ಕಳೆದ ಮೂರು ವರ್ಷಗಳಿಂದ ಮಂಜೂರಾದ ಅನುದಾನ ಹಾಗೂ ಬಿಡುಗಡೆಯಾದ ಮೊತ್ತವೆಷ್ಟು (ವಿವರ ನೀಡುವುದು)	ರಾಷ್ಟ್ರೀಯ ಉದ್ಯಾನವನಗಳಿಗೆ ಕೇಂದ್ರ ಸರ್ಕಾರದಿಂದ ಕಳೆದ ಮೂರು ವರ್ಷಗಳಿಂದ ಮಂಜೂರಾದ / ಬಿಡುಗಡೆಯಾದ ಅನುದಾನದ ವಿವರ ಈ ಕೆಳಕಂಡಂತಿದೆ:

ಅ) ಉತ್ತರದ ಕೋಷ್ಟಕ:

ಕ್ರ. ಸಂ	ಜಿಲ್ಲೆ	ವಿಭಾಗ	ರಾಷ್ಟ್ರೀಯ ಉದ್ಯಾನವನ
1	ಚಾಮರಾಜನಗರ	ಬಂಡೀಪುರ ಹುಲಿ ಯೋಜನೆ	ಬಂಡೀಪುರ ರಾಷ್ಟ್ರೀಯ ಉದ್ಯಾನವನ
2	ಕೊಡಗು ಮತ್ತು ಮೈಸೂರು	ನಾಗರಹೊಳೆ ಹುಲಿ ಯೋಜನೆ	ರಾಜೀವ್ ಗಾಂಧಿ ರಾಷ್ಟ್ರೀಯ ಉದ್ಯಾನವನ,
3	ಉಡುಪಿ, ದಕ್ಷಿಣ ಕನ್ನಡ ಮತ್ತು ಚಿಕ್ಕಮಗಳೂರು	ವನ್ಯಜೀವಿ ವಿಭಾಗ, ಕಾರ್ಕಳ	ಕುದುರೆಮುಖ ರಾಷ್ಟ್ರೀಯ ಉದ್ಯಾನವನ
4	ಬೆಂಗಳೂರು ನಗರ ಮತ್ತು ರಾಮನಗರ	ವನ್ಯಜೀವಿ ವಿಭಾಗ, ಬನ್ನೇರುಘಟ್ಟ	ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನವನ
5	ಉತ್ತರಕನ್ನಡ	ಕಾಳಿ ಹುಲಿ ಯೋಜನೆ	ದಾಂಡೇಲಿ ಅಣಶಿ ರಾಷ್ಟ್ರೀಯ ಉದ್ಯಾನವನ

ಆ) ಉತ್ತರದ ಕೋಷ್ಟಕ:

(ರೂ. ಲಕ್ಷಗಳಲ್ಲಿ)

ವರ್ಷ	ಮಂಜೂರಾದ ಅನುದಾನ	ಬಿಡುಗಡೆಯಾದ ಮೊತ್ತ
ಬಂಡೀಪುರ ರಾಷ್ಟ್ರೀಯ ಉದ್ಯಾನವನ		
2018-19	1549.52	1549.52
2019-20	1390.18	1302.41
2020-21	1646.75	1259.01
ರಾಜೀವ್‌ಗಾಂಧಿ ರಾಷ್ಟ್ರೀಯ ಉದ್ಯಾನವನ		
2018-19	890.72	869.5
2019-20	1289.61	937.52
2020-21	1594.329	66.50
ಕುದುರೆಮುಖ ರಾಷ್ಟ್ರೀಯ ಉದ್ಯಾನವನ		
2018-19	60.1035	40.62
2019-20	69.043	33.25
2020-21	-	-
ಬನ್ನೇರುಘಟ್ಟ ರಾಷ್ಟ್ರೀಯ ಉಧ್ಯಾನವನ		
2018-19	124.94	89.84
2019-20	120.40	102.20
2020-21	56.76	32.50
ದಾಂಡೇಲಿ ಅಣಶಿ ರಾಷ್ಟ್ರೀಯ ಉದ್ಯಾನವನ		
2018-19	172.91	172.91
2019-20	139.04	139.01
2020-21	89.52	32.37

ಇ)	2019–20 ಹಾಗೂ 2020–21ನೇ ಸಾಲಿನಲ್ಲಿ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಮೊತ್ತದಲ್ಲಿ ಬಾಕಿ ಇರುವ ಮೊತ್ತವೆಷ್ಟು? (ವಿವರ ನೀಡುವುದು)	2019–20 ಹಾಗೂ 2020–21ನೇ ಸಾಲಿನಲ್ಲಿ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಮೊತ್ತದಲ್ಲಿ ಬಾಕಿ ಇರುವ ಮೊತ್ತದ ವಿವರ ಈ ಕೆಳಕಂಡಂತಿದೆ:

(ರೂ. ಲಕ್ಷಗಳಲ್ಲಿ)

ಕ್ರ ಸಂ.	ರಾಷ್ಟ್ರೀಯ ಉದ್ಯಾನವನ	2019–20	2020–21 (ಬಿಡುಗಡೆಯಾದ ಅನುದಾನದಲ್ಲಿ ವೆಚ್ಚ ಭರಿಸಲು ಬಾಕಿ ಇರುವ ಅನುದಾನ)
1.	ಬಂಡೀಪುರ ರಾಷ್ಟ್ರೀಯ ಉದ್ಯಾನವನ	2.835	229.691
2	ರಾಜೀವ್‌ಗಾಂಧಿ ರಾಷ್ಟ್ರೀಯ ಉದ್ಯಾನವನ	2.43	30.27
3.	ಕುದುರೆಮುಖ ರಾಷ್ಟ್ರೀಯ ಉದ್ಯಾನವನ	35.80	–
4.	ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನವನ	–	–
5.	ದಾಂಡೇಲಿ ಅಣಶಿ ರಾಷ್ಟ್ರೀಯ ಉದ್ಯಾನವನ	32.40	57.15

ಸಂಖ್ಯೆ: ಅಪಜೀ 147 ಎಫ್‌ಡಬ್ಲ್ಯೂಎಲ್ 2020

(ಆನಂದ್ ಸಿಂಗ್)
ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು

ಕರ್ನಾಟಕ ವಿಧಾನ ಸಭೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 165
ಸದಸ್ಯರ ಹೆಸರು : ಶ್ರೀ ಸತೀಶ್ ಎಲ್ ಜಾರಕಿಹೊಳಿ (ಯಮಕನಮರಡಿ)
ಉತ್ತರಿಸುವ ದಿನಾಂಕ : 24-09-2020
ಉತ್ತರಿಸುವ ಸಚಿವರು : ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಸಚಿವರು

<table>
<tr><th>ಕ್ರ.ಸಂ.</th><th>ಪ್ರಶ್ನೆಗಳು</th><th>ಉತ್ತರಗಳು</th></tr>
<tr><td>ಅ)</td><td>ಅರಣ್ಯ ಇಲಾಖೆಯಲ್ಲಿ ಕಳೆದ ಮೂರು ವರ್ಷಗಳಿಂದ ವಿವಿಧ ಇಲಾಖೆಗಳಿಂದ ಮತ್ತು ಸಾರ್ವಜನಿಕರಿಂದ ಅರಣ್ಯ ಭೂಮಿಗಾಗಿ ಮಂಜೂರಾತಿ ಕೋರಿ ಸಲ್ಲಿಸಲ್ಪಟ್ಟ ಅರ್ಜಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)</td><td>ಅರಣ್ಯ ಸಂರಕ್ಷಣಾ ಕಾಯ್ದೆ, 1980ರ ಅಡಿಯಲ್ಲಿ ಅರಣ್ಯ ಪ್ರದೇಶವನ್ನು ಅರಣ್ಯೇತರ ಉದ್ದೇಶಕ್ಕಾಗಿ ಉಪಯೋಗಿಸಲು ಕಳೆದ ಮೂರು ವರ್ಷಗಳಿಂದ ವಿವಿಧ ಇಲಾಖೆಗಳಿಂದ ಮತ್ತು ಸಾರ್ವಜನಿಕರಿಂದ (ಉಪಯೋಗಿ ಸಂಸ್ಥೆಗಳಿಂದ) ಅನುಮೋದನೆ ಕೋರಿ ಸ್ವೀಕೃತವಾದ ಅರ್ಜಿಗಳ ಒಟ್ಟು ಸಂಖ್ಯೆ 393. ವರ್ಷವಾರು ವಿವರ ಈ ಕೆಳಗಿನಂತಿದೆ:
<table>
<tr><th>ವರ್ಷ</th><th>ಸಂಖ್ಯೆ</th></tr>
<tr><td>2017</td><td>139</td></tr>
<tr><td>2018</td><td>125</td></tr>
<tr><td>2019</td><td>129</td></tr>
<tr><td>ಒಟ್ಟು</td><td>393</td></tr>
</table>
ತಾಲ್ಲೂಕುವಾರು ವಿವರಗಳನ್ನು ಅನುಬಂಧ-01ರಲ್ಲಿರಿಸಿದೆ.</td></tr>
<tr><td>ಆ)</td><td>ಈ ಅರ್ಜಿಗಳನ್ನು ಯಾವ ಕಾಲಮಿತಿಯಲ್ಲಿ ಇತ್ಯರ್ಥಗೊಳಿಸಲಾಗುವುದು?</td><td>ಮೇಲ್ಕಂಡಂತೆ ಸ್ವೀಕೃತವಾದ 393 ಅರ್ಜಿಗಳ ಪ್ರಸ್ತುತ ಹಂತದ ವಿವರಗಳು ಈ ಕೆಳಗಿನಂತಿದೆ:
<table>
<tr><td>1</td><td>ಈಗಾಗಲೇ ಅಂತಿಮ ಅನುಮೋದನೆ/ಮಂಜೂರಾಗಿರುವುದು</td><td>7</td></tr>
<tr><td>2</td><td>ತಾತ್ವಿಕ ಅನುಮೋದನೆ (ಸ್ಟೇಜ್-1) ಆಗಿರುವುದು</td><td>42</td></tr>
<tr><td>3</td><td>ಉಪಯೋಗಿ ಸಂಸ್ಥೆಗಳಲ್ಲಿ ಪರಿಪೂರ್ಣ ಮಾಹಿತಿಯೊಂದಿಗೆ ಮರು ಸಲ್ಲಿಸಲು ಬಾಕಿಯಿರುವ ಪ್ರಸ್ತಾವನೆಗಳು</td><td>259</td></tr>
<tr><td>4</td><td>ಅರಣ್ಯ ಇಲಾಖೆಯ ವಿವಿಧ ಕಛೇರಿಗಳಲ್ಲಿ ಬಾಕಿಯಿರುವ ಪ್ರಸ್ತಾವನೆಗಳು</td><td>53</td></tr>
<tr><td>5</td><td>ರಾಜ್ಯ ಸರ್ಕಾರದಲ್ಲಿ ಬಾಕಿಯಿರುವ ಪ್ರಸ್ತಾವನೆಗಳು</td><td>24</td></tr>
<tr><td>6</td><td>ಕೇಂದ್ರ ಸರ್ಕಾರದಲ್ಲಿ ಬಾಕಿಯಿರುವ ಪ್ರಸ್ತಾವನೆಗಳು</td><td>4</td></tr>
<tr><td>7</td><td>ಹಿಂದಿರುಗಿಸಿದ / ತಿರಸ್ಕರಿಸಿದ ಪ್ರಸ್ತಾವನೆಗಳು</td><td>4</td></tr>
<tr><td colspan="2">ಒಟ್ಟು</td><td>393</td></tr>
</table>
ಮೇಲೆ ನಮೂದಿಸಿದಂತೆ ಬಾಕಿ ಇರುವ ಪ್ರಸ್ತಾವನೆಗಳು ಸ್ವೀಕೃತವಾದ ಕೂಡಲೇ ಕೇಂದ್ರ ಸರ್ಕಾರದಿಂದ ಅನುಮೋದನೆ ಪಡೆಯಲು ಕ್ರಮ ವಹಿಸಲಾಗುತ್ತದೆ.</td></tr>
</table>

ಸಂಖ್ಯೆ: ಅಪಜೀ 67 ಎಫ್‌ಎಲ್‌ಎಲ್ 2020

(ಆನಂದ್ ಸಿಂಗ್)
ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಸಚಿವರು

21	Koppal	Gangavathi	1
		Koppal	3
		Kushtagi	1
		Yelaburgi	1
22	Mandya	Maddur	1
		Mandya	1
		Nagamangala	2
		Pandavapura	2
		Srirangapatna	1
23	Mangaluru	Mangaluru	8
24	Mysore	HD Kote	1
		Hunsur	3
		Mysore	1
		Piriyapatna	1
25	Raichur	Lingasagur	1
		Manvi	3
		Raichur	1
26	Ramanagara	Channapatna	2
		Kanakapura	9
		Magadi	1
		Ramanagara	8
27	Shivamogga	Bhadravati	9
		Hosanagara	1
		Sagara	2
		Shivamogga	5
		Soraba	1
28	Tumkur	Chikkanayakanahalli	3
		Gubbi	3
		Koratagere	3
		Kunigal	1
		Madugiri	1
		Pavagada	1
		Sira	2
		Tiptur	3
		Tumkur	3
		Turuvekere	1
29	Udupi	Brahamvara Kundapura	1
		Brahmavar	1
		Karkala	5

		Kundapura	8
		Udupi	4
30	Uttara Kannada	Ankola	2
		Bhatkal	6
		Gokarna	1
		Haliyal	3
		Honnavar	21
		Joida	1
		kumta	8
		Siddapura	2
		Sirsi	11
		Yellapura	5
31	Yadgiri	Yadgiri	6
		Total	435

ಷರಾ: ಕೆಲವೊಂದು ಪ್ರಸ್ತಾವನೆಗಳು ಒಂದಕ್ಕಿಂತ ಹೆಚ್ಚು ತಾಲ್ಲೂಕುಗಳಲ್ಲಿ ಇರುವ ಕಾರಣ ಒಟ್ಟು ತಾಲ್ಲೂಕುವಾರು ಸಂಖ್ಯೆ ಹಾಗೂ ಒಟ್ಟು ಪ್ರಸ್ತಾವನೆಗಳ ಸಂಖ್ಯೆಯಲ್ಲಿ ವ್ಯತ್ಯಾಸವಿರುತ್ತದೆ.

(ಅನುಬಂಧ-1)

ತಾಲ್ಲೂಕುವಾರು ವಿವರ

Sl No.	Dristrict	Taluks	No of Proposals
1	Bengaluru Urban	Anekal	3
		Bengaluru East	3
		Bengaluru south	7
		Yelahanka	1
2	Bengaluru Rural	Hosakote	1
		Doddaballapura	2
3	Belagavi	Athani	1
		Belagavi	17
		Bylahongala	1
		Chikkodi	1
		Gadag	1
		Khanapur	4
		Raibag	3
		Savadathi	2
4	Bagalkote	Badami	5
		Bagalkote	3
		Bilagi	2
		Hungunda	3
		Jamakhandi	6
		Mudhol	1
		Banahattirabakavi	3
5	Ballari	Ballari	3
		Hosapete	5
		Kudligi	2
		Sandur	32
6	Bidar	Bhalki	1
		Bidar	5
7	Chamarajanagar	Kollegal	12
8	Chikkabalapura	Chikkabalapura	1
9	Chikkamagaluru	Chikkamagaluru	2
		Chikmagaluru	1
		Kadur	2
		Koppa	1
		Mudigere	2

		Narasimharajapura	3
		Shringeri	2
		Sringeri	1
		Tarikere	2
10	Chitradurga	challkere	2
		Chitradurga	8
		Hiriyur	3
		Holalkere	5
		Hosadurga	3
		Molakalmur	3
11	Dakshina Kannada	Bantwal	4
		Belthangady	4
		Puttur	8
		Sulya	5
12	Davanagere	Channagiri	2
		Davanagere	4
		Harapanahali	4
		Honnali	1
13	Dharwad	Dharwad	3
		Hubli	2
14	Gadag	Gadag	1
		Mundaragi	3
		Shirahatti	7
15	Gulabarga	Chincholi	1
		Sedam	1
16	Hassan	Arasikere	1
		Belur	1
		Channarayapatna	1
		Hassan	4
		Sakaleshpura	1
17	Haveri	Haveri	1
		Ranibennur	5
18	Karwar	Karwar	9
19	Kodagu	Madakeri	3
		Somwarpet	6
		Virajpet	3
20	Kolar	Chintamani	1
		KGF	1
		Kolar	1

ಕರ್ನಾಟಕ ವಿಧಾನ ಸಭೆ

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 926
2. ಮಾನ್ಯ ಸದಸ್ಯರ ಹೆಸರು : ಶ್ರೀ ಕೃಷ್ಣಾರೆಡ್ಡಿ ಎಂ. (ಚಿಂತಾಮಣಿ)
3. ಉತ್ತರಿಸಬೇಕಾದ ದಿನಾಂಕ : **24/09/2020**
4. ಉತ್ತರಿಸುವವರು : ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು

ಕ್ರ ಸಂ.	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಕೊರೋನಾದಿಂದಾದ ಲಾಕ್‌ಡೌನ್ ಅವಧಿಯಲ್ಲಿ ಕಟ್ಟಡ ಕಾರ್ಮಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:	ಬಂದಿದೆ
ಆ)	ಬಂದಿದ್ದಲ್ಲಿ ಈ ಬಗ್ಗೆ ಕೈಗೊಂಡ ಕ್ರಮಗಳೇನು: (ವಿವರ ನೀಡುವುದು)	ಕೋವಿಡ್-19 ಲಾಕ್‌ಡೌನ್ ಸಂದರ್ಭದಲ್ಲಿ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ವತಿಯಿಂದ ಕಟ್ಟಡ ಕಾರ್ಮಿಕರು ಮತ್ತು ವಲಸೆ ಕಾರ್ಮಿಕರು ರಕ್ಷಣೆಗಾಗಿ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ. 1. ಮಾನ್ಯ ಮುಖ್ಯಮಂತ್ರಿಗಳ ಘೋಷಣೆಯಂತೆ ಮಂಡಳಿಯ 16,48,431 ಸಂಖ್ಯೆಯ ಫಲಾನುಭವಿಗಳಿಗೆ ತಲಾ ರೂ.5,000/- ಗಳಂತೆ ಒಟ್ಟು ರೂ. 824.21 ಕೋಟಿ ಸಹಾಯ ಧನವನ್ನು ನೇರವಾಗಿ ಕಾರ್ಮಿಕರ ಬ್ಯಾಂಕ್ ಖಾತೆಗಳಿಗೆ ಜಮಾ ಮಾಡಲಾಗಿರುತ್ತದೆ. 2. ಕಟ್ಟಡ ಮತ್ತು ವಲಸೆ ಕಟ್ಟಡ ಕಾರ್ಮಿಕರಿಗೆ ಕೋರೋನಾ ವೈರಸ್ ಬಗ್ಗೆ ಅರಿವು ಮೂಡಿಸಲು ಮತ್ತು ಮಾಸ್ಕ್ ಸ್ಯಾನಿಟೈಸರ್ ಹಾಗೂ ಸೋಪುಗಳನ್ನು ಕಾರ್ಮಿಕರಿಗೆ ವಿತರಣೆ ಮಾಡಲು 41 ಉಪ ವಿಭಾಗ ಮಟ್ಟದ ಕಾರ್ಮಿಕ ಅಧಿಕಾರಿಗಳಿಗೆ ತಲಾ ರೂ.10 ಲಕ್ಷಗಳನ್ನು ಬಿಡುಗಡೆ ಮಾಡಲಾಗಿರುತ್ತದೆ. 3. ಮಂಡಳಿಯ ವತಿಯಿಂದ ಬೆಂಗಳೂರಿನಲ್ಲಿ ಸ್ಥಾಪಿಸಲಾಗಿದ್ದ 10 ಶಿಶುಪಾಲನಾ ಕೇಂದ್ರಗಳಲ್ಲಿನ ಮಕ್ಕಳಿಗಾಗಿ Packed Nutrition Food & Toys ಗಳನ್ನು ಪೋಷಕರ ಮನೆಗಳಿಗೆ ತಲುಪಿಸಲಾಗಿರುತ್ತದೆ. 4. ಕಟ್ಟಡ ಮತ್ತು ವಲಸೆ ಕಟ್ಟಡ ಕಾರ್ಮಿಕರಿಗೆ ಆಹಾರ ಒದಗಿಸಲು ಮತ್ತು ಅವರ ಸಮಸ್ಯೆಗಳನ್ನು ಆಲಿಸಲು 24*7 ಸಹಾಯವಾಣಿ (155214) ಯನ್ನು ಸ್ಥಾಪಿಸಲಾಗಿರುತ್ತದೆ. 5. ವಸತಿ ರಹಿತ ಕಟ್ಟಡ ಮತ್ತು ವಲಸೆ ಕಟ್ಟಡ ಕಾರ್ಮಿಕರಿಗೆ ಜಿಲ್ಲಾಡಳಿತದ ಸಹಕಾರದೊಂದಿಗೆ ವಸತಿ ಸೌಲಭ್ಯ ಮತ್ತು ಊಟವನ್ನು ಒದಗಿಸಲಾಗಿರುತ್ತದೆ. 6. ಕಟ್ಟಡ ಮತ್ತು ವಲಸೆ ಕಟ್ಟಡ ಕಾರ್ಮಿಕರಿಗೆ ಲಾಕ್ ಡೌನ್ ಪ್ರಾರಂಭದಿಂದ ಇದುವರೆಗೂ 89.86 ಲಕ್ಷ ಸಿದ್ಧಪಡಿಸಿದ ಆಹಾರದ ಪ್ಯಾಕೆಟ್ ಗಳನ್ನು ವಿತರಿಸಲಾಗಿರುತ್ತದೆ.

		7. ಕಟ್ಟಡ ಮತ್ತು ವಲಸೆ ಕಟ್ಟಡ ಕಾರ್ಮಿಕರಿಗೆ 6.08 ಲಕ್ಷ ಆಹಾರ ಸಾಮಾಗ್ರಿಗಳ ಕಿಟ್ ಗಳನ್ನು ತಯಾರಿಸಿ ವಿತರಿಸಲಾಗುತ್ತಿದೆ. 8. ಕಂದಾಯ ಮತ್ತು ಇತರೆ ಇಲಾಖೆಗಳಿಂದ ವಲಸೆ ಕಟ್ಟಡ ಕಾರ್ಮಿಕರನ್ನು ತಮ್ಮ ತವರು ರಾಜ್ಯಗಳಿಗೆ ವಿಶೇಷ ಶ್ರಮಿಕ್ ರೈಲುಗಳ ಮೂಲಕ ಕಳುಹಿಸಲು ಅಗತ್ಯ ಕ್ರಮ ಕೈಗೊಂಡಿದ್ದು, ಸದರಿ ವಲಸೆ ಕಟ್ಟಡ ಕಾರ್ಮಿಕರುಗಳು ಲಾಕ್‌ಡೌನ್ ಸಂದರ್ಭದಲ್ಲಿ ತಮ್ಮ ತವರು ರಾಜ್ಯಗಳಿಗೆ ಶ್ರಮಿಕ್ ರೈಲುಗಳ ಮೂಲಕ ಪ್ರಯಾಣಿಸಿದ ಸಂದರ್ಭದಲ್ಲಿ ಮಂಡಳಿಯಿಂದ ಸಿದ್ಧಪಡಿಸಿದ ಆಹಾರ, ಬೇಯಿಸಿದ ಮೊಟ್ಟೆ, ಹಣ್ಣುಗಳು, ನೀರಿನ ಬಾಟಲ್ ಮತ್ತು ಮಜ್ಜಿಗೆಯನ್ನು ವಿತರಿಸಲಾಗಿರುತ್ತದೆ.
ಇ)	ಈ ವರೆಗೆ ಎಷ್ಟು ಕಟ್ಟಡ ಕಾರ್ಮಿಕರಿಗೆ ಸಹಾಯಧನ ಹಾಗೂ ಆಹಾರ ಕಿಟ್‌ಗಳನ್ನು ವಿತರಿಸಲಾಗಿದೆ? (ತಾಲ್ಲೂಕುವಾರು ವಿವರ ನೀಡುವುದು)	ಕೋವಿಡ್–19ರ ಸಂದರ್ಭದಲ್ಲಿ ಮಂಡಳಿಯಿಂದ 16,48,431 ನೋಂದಾಯಿತ ಕಟ್ಟಡ ಕಾರ್ಮಿಕ ಫಲಾನುಭವಿಗಳಿಗೆ ರೂ. 5,000/- ಗಳ ಪರಿಹಾರವನ್ನು ನೀಡಲಾಗಿರುತ್ತದೆ. ಫಲಾನುಭವಿಗಳ ಜಿಲ್ಲಾವಾರು ವಿವರವನ್ನು **ಅನುಬಂಧ–1** ರಲ್ಲಿ ನೀಡಿದೆ. ಕಟ್ಟಡ ಕಾರ್ಮಿಕರು, ವಲಸೆ ಕಾರ್ಮಿಕರು ಮತ್ತು ಅಸಂಘಟಿತ ಕಾರ್ಮಿಕರಿಗಾಗಿ 6,08,000 ಆಹಾರ ಸಾಮಾಗ್ರಿಗಳ ಕಿಟ್‌ಗಳನ್ನು ವಿತರಿಸಲಾಗಿದ್ದು ಪ್ರದೇಶವಾರು ವಿವರಗಳನ್ನು **ಅನುಬಂಧ–2** ರಲ್ಲಿ ನೀಡಿದೆ.

ಕಾಇ 312 ಎಲ್‌ಇಟಿ 2020

(ಅರಬೈಲ್ ಶಿವರಾಂ ಹೆಬ್ಬಾರ್)
ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು

ಕರ್ನಾಟಕ ವಿಧಾನ ಸಭೆ

1)	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	929
2)	ಮಾನ್ಯ ಸದಸ್ಯರ ಹೆಸರು	ಶ್ರೀ ಮುರುಗೇಶ್ ರುದ್ರಪ್ಪ ನಿರಾಣಿ (ಬೀಳಗಿ)
3)	ಉತ್ತರಿಸಬೇಕಾದ ದಿನಾಂಕ	24/09/2020
4)	ಉತ್ತರಿಸುವವರು	**ಮಾನ್ಯ ಉಪ ಮುಖ್ಯಮಂತ್ರಿಗಳು ಮತ್ತು ಉನ್ನತ ಶಿಕ್ಷಣ, ಐಟಿ/ಬಿಟಿ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು.**

ಪ್ರಶ್ನೆ	ಉತ್ತರ
(ಅ) ನಿರುದ್ಯೋಗ ನಿವಾರಿಸುವಲ್ಲಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಲ್ಲಿ ಇರುವ ಯೋಜನೆಗಳಾವುವು:	**ಕೌಶಲ್ಯ ಮಿಷನ್ :** ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಡಿ ಮುಖ್ಯಮಂತ್ರಿಗಳ ಕೌಶಲ್ಯ ಕರ್ನಾಟಕ ಯೋಜನೆ **(ಸಿಎಂಕೆಕೆವೈ)** ಮತ್ತು ಪ್ರಧಾನ ಮಂತ್ರಿಗಳ ಕೌಶಲ್ಯ ವಿಕಾಸ್ ಯೋಜನೆಗಳನ್ನು **(ಪಿಎಂಕೆವಿವೈ)** ಜಾರಿಗೊಳಿಸಲಾಗಿದ್ದು, ಈ ಯೋಜನೆಗಳಡಿ ರಾಜ್ಯದ ನಿರುದ್ಯೋಗ ಯುವಕ-ಯುವತಿಯರಿಗೆ ಕೌಶಲ್ಯ ತರಬೇತಿಗಳನ್ನು ನೀಡುವುದರ ಮುಖಾಂತರ ಶೇ 70% ರಷ್ಟು ಉದ್ಯೋಗ ಅವಕಾಶಗಳನ್ನು ಕಲ್ಪಿಸಲಾಗುತ್ತದೆ. **ಡೇ-ನಲ್ಮ್:** <u>ಸಾಮಾಜಿಕ ಕ್ರೋಢೀಕರಣ ಮತ್ತು ಸಾಂಸ್ಥಿಕ ಅಭಿವೃದ್ಧಿ :</u> ➢ ಕೌಶಲ್ಯ ತರಬೇತಿ ಮೂಲಕ ಉದ್ಯೋಗ ಮತ್ತು ಸ್ಥಳನಿಯುಕ್ತಿ ➢ ಸ್ವಯಂ ಉದ್ಯೋಗ ಯೋಜನೆ (ವೈಯಕ್ತಿಕ ಹಾಗೂ ಗುಂಪು) **ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ (NRLM):** ಸಂಜೀವಿನಿ – ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಸಂವರ್ಧನಾ ಸಂಸ್ಥೆಯ ಮೂಲಕ ಅನುಷ್ಠಾನಗೊಳಿಸಲಾಗುತ್ತಿರುವ ಯೋಜನೆಗಳು ಈ ಕೆಳಕಂಡಂತಿವೆ. ➢ ದೀನ್ ದಯಾಳ್ ಉಪಾಧ್ಯಾಯ ಗ್ರಾಮೀಣ ಕೌಶಲ್ಯ ಯೋಜನೆಯಡಿ ವಿವಿಧ ಕೌಶಲ್ಯಗಳ ಉಚಿತ ತರಬೇತಿ, ಊಟ, ವಸತಿ ಸೌಲಭ್ಯಗಳನ್ನು ನೀಡಿ ಶೇಕಡಾ 70 ರಷ್ಟು ಮಂದಿಗೆ ಉದ್ಯೋಗಾವಕಾಶಗಳನ್ನು ದೊರಕಿಸುವುದು. ➢ ಗ್ರಾಮೀಣ ಸ್ವಉದ್ಯೋಗ ತರಬೇತಿ ಕೇಂದ್ರ – ಆರ್‌ಸೆಟಿ ಕಾರ್ಯಕ್ರಮದಡಿ ತರಬೇತಿ ನೀಡಿ ಸ್ವಉದ್ಯೋಗ ಸಂಬಂಧ ಆರ್ಥಿಕ ನೆರವುದೊರಕಿಸುವ ಮುಖೇನ ಪ್ರೋತ್ಸಾಹಿಸುವುದು. **ಸಿಡಾಕ್:** ಸಂಸ್ಥೆಯಿಂದ ಉದ್ಯಮಶೀಲತಾ ತಿಳುವಳಿಕೆ ಕಾರ್ಯಕ್ರಮ ಹಾಗೂ ಉದ್ಯಮಶೀಲತಾ ಅಭಿವೃದ್ಧಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಕೌಶಲ್ಯ ಉದ್ಯೋಗ ಯೋಜನೆಯಡಿಯಲ್ಲಿ ಸ್ವಾವಲಂಬಿಯಾಗಲು ಮತ್ತು ಸ್ವಂತ ಬಂಡವಾಳದೊಂದಿಗೆ ಉದ್ದಿಮೆಯನ್ನು ಸ್ಥಾಪನೆ ಮಾಡಲು ಉದ್ಯಮಶೀಲತಾಭಿವೃದ್ಧಿ ತರಬೇತಿ ಕಾರ್ಯಕ್ರಮಗಳನ್ನು ಸಿಡಾಕ್ ಸಂಸ್ಥೆಯಿಂದ ಹಮ್ಮಿಕೊಳ್ಳಲಾಗುತ್ತಿದೆ.

(ಆ) ಕಳೆದ 03 ವರ್ಷಗಳಲ್ಲಿ ಬಾಗಲಕೋಟೆ, ಬೆಳಗಾವಿ ಮತ್ತು ವಿಜಯಪುರ ಜಿಲ್ಲೆಗಳಲ್ಲಿ ಸದರಿ ಯೋಜನೆಗಳ ಸೌಲಭ್ಯ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

ಕೌಶಲ್ಯ ಮಿಷನ್:
ಅನುಬಂಧ-1 ರಲ್ಲಿ ಫಲಾನುಭವಿಗಳ ವಿವರ ಲಗತ್ತಿಸಲಾಗಿದೆ.

ಸಿಡಾಕ್:
2017-18, 2018-19 ಮತ್ತು 2019-20 ನೇ ಸಾಲಿನಲ್ಲಿ ಬಾಗಲಕೋಟ, ಬೆಳಗಾವಿ ಮತ್ತು ವಿಜಯಪುರ ಜಿಲ್ಲೆಗಳಲ್ಲಿ ಹಮ್ಮಿಕೊಂಡ ಕಾರ್ಯಕ್ರಮಗಳಲ್ಲಿ ಭಾಗವಹಿಸಿದ ಫಲಾನುಭವಿಗಳ ವಿವರವನ್ನು ಅನುಬಂಧ-2 ರಲ್ಲಿ ಲಗತ್ತಿಸಿದೆ.

ರಾಷ್ಟ್ರೀಯ ನಗರ ಜೀವನೋಪಾಯ ಅಭಿಯಾನ (NULM):
ಅನುಬಂಧ-3 ಎ, ಬಿ, ಸಿ ರಲ್ಲಿ ಫಲಾನುಭವಿಗಳ ವಿವರ ಲಗತ್ತಿಸಲಾಗಿದೆ.

ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ (NRLM):
ಕಳೆದ ಮೂರು ವರ್ಷಗಳಲ್ಲಿ ಬಾಗಲಕೋಟ, ಬೆಳಗಾವಿ ಮತ್ತು ವಿಜಯಪುರ ಜಿಲ್ಲೆಗಳಲ್ಲಿ ಯೋಜನೆ ಲಾಭ ಪಡೆದಫಲಾನುಭವಿಗಳ ಸಂಖ್ಯೆ ವಿವರ ಈ ಕೆಳಕಂಡಂತಿದೆ.

ಡಿಡಿಯುಜಿಕೆವೈ				
ಕ್ರಸಂ.	ಜಿಲ್ಲೆ	2017-18	2018-19	2019-20
1	ಬಾಗಲಕೋಟೆ	0	0	53
2	ಬೆಳಗಾವಿ	62	138	508
3	ವಿಜಯಪುರ	302	516	84

ಆರ್‌ಸೆಟಿ				
ಕ್ರ.ಸಂ.	ಜಿಲ್ಲೆ	2017-18	2018-19	2019-20
1	ಬಾಗಲಕೋಟೆ	759	760	649
2	ಬೆಳಗಾವಿ	928	751	817
3	ವಿಜಯಪುರ	953	953	755

(ಇ) ಬಾಗಲಕೋಟೆ ಜಿಲ್ಲೆಯ ಬೀಳಗಿ ವಿಧಾನಸಭಾ ವ್ಯಾಪ್ತಿಯಲ್ಲಿ ಎಷ್ಟು ಕೈಗಾರಿಕಾ ತರಬೇತಿ ಸಂಸ್ಥೆಗಳಿವೆ; ಸರ್ಕಾರಿ ಮತ್ತು ಖಾಸಗಿ ಸಂಸ್ಥೆವಾರು ಸಂಪೂರ್ಣ ವಿವರ ನೀಡುವುದು?

ಬಾಗಲಕೋಟೆ ಜಿಲ್ಲೆಯ ಬೀಳಗಿ ವಿಧಾನಸಭಾ ವ್ಯಾಪ್ತಿಯಲ್ಲಿ 2 ಸರ್ಕಾರಿ ಹಾಗೂ 5 ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆಗಳಿವೆ ವಿವರಗಳು ಈ ಕೆಳಕಂಡಂತಿವೆ.

ಸರ್ಕಾರಿ

1. ಸರ್ಕಾರಿ ಕೈ.ತ.ಸಂಸ್ಥೆ, ಬೀಳಗಿ
2. ಸರ್ಕಾರಿ ಕೈ.ತ.ಸಂಸ್ಥೆ, ಕಲಾದ್‌ಗಿ

ಖಾಸಗಿ ಅನುದಾನ ರಹಿತ

1. ಎಸ್. ಸಿ. ಅಂತರಗೊಂಡ ಕೈ.ತ.ಸಂಸ್ಥೆ, ಬೀಳಗಿ ಕ್ರಾಸ್
2. ಶ್ರೀ ಕನಕದಾಸ ಕೈ.ತ.ಸಂಸ್ಥೆ ಕೊಪ್ಪ ಆರ್.ಸಿ.
3. ಸರ್.ಎಂ. ವಿಶ್ವೇಶ್ವರಯ್ಯ ಕೈ.ತ.ಸಂಸ್ಥೆ, ಬೀಳಗಿ
4. ಗಾಲವ ಕೈ.ತ.ಸಂಸ್ಥೆ, ಗಲಗಲಿ
5. ಶ್ರೀ ರಾಮಲಿಂಗೇಶ್ವರ ಕೈ.ತ.ಸಂಸ್ಥೆ, ಕುಂದರಗಿ

ಸಂಖ್ಯೆ: ಕೌಉಜೀಇ 41 ಉಜೀಪ್ರ 2020

(ಡಾ॥ ಸಿ.ಎನ್. ಅಶ್ವಥ್‌ನಾರಾಯಣ)
ಉಪ ಮುಖ್ಯಮಂತ್ರಿಗಳು ಮತ್ತು ಉನ್ನತ ಶಿಕ್ಷಣ,
ಐಟಿ/ಬಿಟಿ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ
ಮತ್ತು ಜೀವನೋಪಾಯ ಸಚಿವರು.

ಕರ್ನಾಟಕ ವಿಧಾನ ಸಭೆ

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1220
2. ಮಾನ್ಯ ಸದಸ್ಯರ ಹೆಸರು : ಶ್ರೀ ಉಮಾನಾಥ.ಎ. ಕೊಟ್ಯಾನ್
3. ಉತ್ತರಿಸಬೇಕಾದ ದಿನಾಂಕ : 24/09/2020
4. ಉತ್ತರಿಸುವವರು : ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು

ಕ್ರಮ ಸಂಖ್ಯೆ	ಪ್ರಶ್ನೆ	ಉತ್ತರ
ಅ)	ಕಾರ್ಮಿಕ ಇಲಾಖಾ ವ್ಯಾಪ್ತಿಯ ಯೋಜನಾನುಷ್ಠಾನದ ಗುರಿ–ಸಾಧನೆಗಳಾವುವು (ವಿವರ ನೀಡುವುದು)	ಕಾರ್ಮಿಕ ಇಲಾಖೆಯ ಅಧೀನದಲ್ಲಿರುವ ಮಂಡಳಿಗಳ ಮೂಲಕ ಕಾರ್ಮಿಕರಿಗೆ ಕೆಲವು ಯೋಜನೆಗಳನ್ನು ಜಾರಿಗೊಳಿಸಲಾಗುತ್ತಿದ್ದು, ಅವುಗಳ ವಿವರಗಳು ಈ ಕೆಳಕಂಡಂತೆ ಇರುತ್ತವೆ. **I. <u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ</u>** **1. <u>ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ:–</u>** **<u>ಗುರಿ:</u>** ಖಾಸಗಿ ವಾಣಿಜ್ಯ ಸಾರಿಗೆ ವಾಹನ ಚಲಾಯಿಸಲು ಸಾರಿಗೆ ಇಲಾಖೆಯಿಂದ ಊರ್ಜಿತ ಚಾಲನಾ ಪರವಾನಗಿ ಹೊಂದಿರುವ ಎಲ್ಲಾ ಚಾಲಕರಿಗೆ ಯೋಜನೆಯಡಿ ಸೌಲಭ್ಯಗಳನ್ನು ಒದಗಿಸುವ ಗುರಿ ಹೊಂದಿದೆ. **<u>ಸಾಧನೆ:</u>** ಖಾಸಗಿ ವಾಣಿಜ್ಯ ಸಾರಿಗೆ ವಾಹನ ಚಲಾಯಿಸಲು ಸಾರಿಗೆ ಇಲಾಖೆಯಿಂದ ಊರ್ಜಿತ ಚಾಲನಾ ಪರವಾನಗಿ ಹೊಂದಿರುವ ಎಲ್ಲಾ 7,78,485 ಚಾಲಕರನ್ನು ಯೋಜನೆಯ ವ್ಯಾಪ್ತಿಗೆ ತರಲಾಗಿದೆ. ಈ ಯೋಜನೆಯಡಿ ಕೆಳಕಂಡ ಸೌಲಭ್ಯಗಳನ್ನು ನೀಡಲಾಗುತ್ತಿದೆ:– **ಅ) <u>ಅಪಘಾತ ಪರಿಹಾರ:–</u>** ಅಪಘಾತದಿಂದಾದ ಮರಣ ಪ್ರಕರಣಗಳಲ್ಲಿ ರೂ. 5 ಲಕ್ಷ ಪರಿಹಾರ, ಸಂಪೂರ್ಣ ಶಾಶ್ವತ ದುರ್ಬಲತೆ ಪ್ರಕರಣಗಳಲ್ಲಿ ರೂ.2 ಲಕ್ಷ ಪರಿಹಾರ ಮತ್ತು ಒಳರೋಗಿಯಾಗಿ ಚಿಕಿತ್ಸೆ ಪಡೆದಲ್ಲಿ ರೂ.1 ಲಕ್ಷದ ವರೆಗೆ ಚಿಕಿತ್ಸಾ ವೆಚ್ಚದ ಮರುಪಾವತಿ ನೀಡಲಾಗುತ್ತಿದೆ.

ಸಾಧನೆ: ಯೋಜನೆಯಡಿ ಈವರೆಗೆ ಪರಿಹಾರ ನೀಡಲ್ಪಟ್ಟ ಪ್ರಕರಣಗಳ ವಿವರ ಹೀಗಿದೆ:-

ಕ್ರ ಸಂ	ವಿವರಣೆ	ಪ್ರಕರಣ	ಪರಿಹಾರದ ಮೊತ್ತ
1	ಮರಣ	555	ರೂ.18,20,50,000/-
2	ಶಾಶ್ವತ ದುರ್ಬಲತೆ	05	ರೂ.5,00,000/-
3	ಆಸ್ಪತ್ರೆ ವೆಚ್ಚದ ಮರುಪಾವತಿ/ತಾತ್ಕಾಲಿಕ ದುರ್ಬಲತೆ	137	ರೂ.51,10,740/-
	ಒಟ್ಟು	**697**	**ರೂ.18,66,12,620/-**

ಆ) ಶೈಕ್ಷಣಿಕ ಧನ ಸಹಾಯ:-

ಅಪಘಾತದ ಕಾರಣ ನಿಧನರಾದ ಅಥವಾ ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಫಲಾನುಭವಿಗಳ ಗರಿಷ್ಠ ಇಬ್ಬರು ಮಕ್ಕಳಿಗೆ ಒಂದನೇ ತರಗತಿಯಿಂದ ಪದವಿಪೂರ್ವ ತರಗತಿಯ ವರೆಗೆ ವ್ಯಾಸಂಗ ಮಾಡಲು ವಾರ್ಷಿಕ ತಲಾ ರೂ.10,000/-ರಂತೆ ಶೈಕ್ಷಣಿಕ ಸಹಾಯ ಧನ ವಿತರಿಸಲಾಗುತ್ತಿದೆ.

ಸಾಧನೆ: ಈವರೆಗೆ ವಿವಿಧ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ 321 ವಿದ್ಯಾರ್ಥಿಗಳಿಗೆ ಒಟ್ಟು ರೂ.32,10,000/-ಗಳ ಶೈಕ್ಷಣಿಕ ಸಹಾಯ ಧನ ವಿತರಿಸಲಾಗಿದೆ.

ಇ) ಅಪಘಾತ ಜೀವರಕ್ಷಕ ಕಾರ್ಯಕ್ರಮ:-

ಗುರಿ: ಅಪಘಾತಕ್ಕೊಳಗಾದ ಗಾಯಾಳುಗಳನ್ನು ರಕ್ಷಿಸುವ ಸ್ವಯಂಸೇವಕರನ್ನು ಸೃಷ್ಠಿಸುವ ಉದ್ದೇಶದಿಂದ ಅಪಘಾತ ಜೀವರಕ್ಷಕ ಕಾರ್ಯಕ್ರಮದಡಿ ಚಾಲಕರಿಗೆ ಪ್ರಥಮ ಪ್ರಥಮ ಚಿಕಿತ್ಸಾ ತರಬೇತಿ ನೀಡುವ ಗುರಿ ಹೊಂದಲಾಗಿದೆ.

ಸಾಧನೆ: ಈವರೆಗೆ ಒಟ್ಟು 38,569 ಚಾಲಕರಿಗೆ ಪ್ರಥಮ ಚಿಕಿತ್ಸಾ ತರಬೇತಿ ನೀಡಲಾಗಿದ್ದು, ಅಪಘಾತದ ಗಾಯಾಳುಗಳನ್ನು ರಕ್ಷಿಸುವ ಅಪಘಾತ ಜೀವರಕ್ಷಕರನ್ನಾಗಿ ಸಜ್ಜುಗೊಳಿಸಲಾಗಿದೆ.

2. ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ:-

ಅ) ಸ್ಮಾರ್ಟ್ ಕಾರ್ಡ್ ವಿತರಣೆ:-

ಗುರಿ: ಅಸಂಘಟಿತ ವಲಯದ 11 ಕಾರ್ಮಿಕ ವರ್ಗಗಳಾದ "ಹಮಾಲರು, ಮನೆಗೆಲಸದವರು, ಚಿಂದಿ ಆಯುವವರು, ಟೈಲರ್ಸ್, ಮೆಕ್ಯಾನಿಕ್, ಅಗಸರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು,

ಕ್ಷೌರಿಕರು ಹಾಗೂ ಭಟ್ಟಿ ಕಾರ್ಮಿಕ"ರನ್ನು ಏಕ ಶೀರ್ಷಿಕೆ ಮತ್ತು ಏಕ ಚಿಹ್ನೆಯಡಿ ನೋಂದಾಯಿಸಿ "ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ"ಯಡಿ ಸ್ಮಾರ್ಟ್ ಕಾರ್ಡ್ ನೀಡುವ ಗುರಿ ಹೊಂದಲಾಗಿದೆ. ನೋಂದಾಯಿಸಬೇಕಾದ ಸದರಿ ವಲಯಗಳ ಕಾರ್ಮಿಕರ ಸಂಖ್ಯೆಯ ಕುರಿತು ಪ್ರತ್ಯೇಕ ಗುರಿಯನ್ನು ನಿಗದಿಪಡಿಸಿರುವುದಿಲ್ಲ.

ಸಾಧನೆ: ಈವರೆಗೆ ಸದರಿ ವರ್ಗಗಳ 53,672 ಕಾರ್ಮಿಕರನ್ನು ನೋಂದಾಯಿಸಿ ಸ್ಮಾರ್ಟ್ ಕಾರ್ಡ್ ವಿತರಿಸಲಾಗಿದೆ.

ಆ) ಕಾರ್ಮಿಕ ಸೇವಾ ಕೇಂದ್ರ :-

ಗುರಿ: ಕಾರ್ಮಿಕ ಇಲಾಖೆ ಹಾಗೂ ಅದರ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಮಂಡಳಿ ಹಾಗೂ ಸೊಸೈಟಿಗಳು ಜಾರಿಗೊಳಿಸುತ್ತಿರುವ ಯೋಜನೆಗಳ ಸೌಲಭ್ಯಗಳ ಕುರಿತು ಫಲಾನುಭವಿಗಳಲ್ಲಿ ಮಾಹಿತಿ ನೀಡಲು, ಯೋಜನೆಗಳ ಸೌಲಭ್ಯಗಳನ್ನು ಪಡೆದುಕೊಳ್ಳಲು ಅವಶ್ಯಕವಿರುವ ದಾಖಲಾತಿಗಳನ್ನು ಸಿದ್ಧಪಡಿಸಲು ಹಾಗೂ ನಿಗಧಿಪಡಿಸಿದ ಅರ್ಜಿ ನಮೂನೆಗಳನ್ನು ಭರ್ತಿ ಮಾಡಿ ಸಂಬಂಧಪಟ್ಟವರಿಗೆ ರವಾನಿಸಲು ಸಹಾಯವಾಗುವಂತೆ ರಾಜ್ಯದ ಎಲ್ಲಾ 175 ತಾಲ್ಲೂಕುಗಳಲ್ಲಿ ತಲಾ ಒಂದರಂತೆ ಕಾರ್ಮಿಕ ಸೇವಾ ಕೇಂದ್ರಗಳನ್ನು ಹಾಗೂ ಬೆಂಗಳೂರು ವ್ಯಾಪ್ತಿಯಲ್ಲಿ 6 ಕಾರ್ಮಿಕ ಸೇವಾ ಕೇಂದ್ರಗಳು ಸೇರಿ ಒಟ್ಟು 181 ಕಾರ್ಮಿಕ ಸೇವಾ ಕೇಂದ್ರಗಳನ್ನು ತೆರೆಯುವ ಗುರಿಯಾಗಿರುತ್ತದೆ.

ಸಾಧನೆ: ರಾಜ್ಯದಾದ್ಯಂತ ಈವರೆಗೆ 159 ತಾಲ್ಲೂಕುಗಳಲ್ಲಿ ಕಾರ್ಮಿಕ ಸೇವಾ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು ಕಾರ್ಮಿಕ ಇಲಾಖೆ ಹಾಗೂ ಇಲಾಖೆಯ ಅಧೀನದಲ್ಲಿ ಬರುವ ಮಂಡಳಿಗಳು ಮತ್ತು ಸೊಸೈಟಿಯ ಮೂಲಕ ಜಾರಿಗೊಳಿಸುತ್ತಿರುವ ಯೋಜನೆಗಳ ಕುರಿತಾದ ಮಾಹಿತಿಯನ್ನು ಹಾಗೂ ಸೌಲಭ್ಯಗಳನ್ನು ಪಡೆಯಲು ಬೇಕಾದ ಎಲ್ಲಾ ರೀತಿಯ ಸಹಾಯವನ್ನು ಕಾರ್ಮಿಕರಿಗೆ ನೀಡಲಾಗುತ್ತಿದೆ.

II. ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ

ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ನೋಂದಾಯಿತ ಕಟ್ಟಡ ಕಾರ್ಮಿಕರಿಗೆ ಹಲವಾರು ರೀತಿಯ ಕಲ್ಯಾಣ ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ನೀಡಲಾಗುತ್ತಿದೆ. ಮಂಡಳಿಯಿಂದ ನೀಡಲಾಗಿರುವ ಸೌಲಭ್ಯಗಳ ವಿವರಗಳನ್ನು **ಅನುಬಂಧ-1** ರಲ್ಲಿ ಲಗತ್ತಿಸಿದೆ.

III. ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ

ಕಾರ್ಮಿಕ ಇಲಾಖೆಯ ವ್ಯಾಪ್ತಿಯಲ್ಲಿರುವ ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಯು ಸಂಘಟಿತ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಖಾನೆಗಳು, ತೋಟಗಳು ಹಾಗೂ 50ಕ್ಕಿಂತ ಹೆಚ್ಚು ಕಾರ್ಮಿಕರಿರುವ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳಿಂದ 20:40 ಅನುಪಾತದಲ್ಲಿ ಕಾರ್ಮಿಕರು ಹಾಗೂ ಮಾಲೀಕರ ಪಾಲಿನ ವಂತಿಕೆಯನ್ನು ಸಂಗ್ರಹಿಸಿ ಕಾರ್ಮಿಕರು ಹಾಗೂ ಅವರ ಅವಲಂಬಿತರಿಗೆ ಕಲ್ಯಾಣ ಯೋಜನೆಗಳ ಅಡಿಯಲ್ಲಿ ಸೌಲಭ್ಯ ನೀಡಲಾಗುತ್ತಿದೆ.

ಮಂಡಳಿಯಿಂದ ನೀಡಲಾಗಿರುವ ಸೌಲಭ್ಯಗಳ ವಿವರಗಳನ್ನು <u>ಅನುಬಂಧ-2</u> ರಲ್ಲಿ ಲಗತ್ತಿಸಿದೆ.

2019-20ನೇ ಸಾಲಿನಲ್ಲಿ ಕಲ್ಯಾಣ ಯೋಜನೆಗಳ ಗುರಿ ಮತ್ತು ಸಾಧನೆಗಳ ವಿವರಗಳು ಈ ಕೆಳಕಂಡಂತೆ ಇರುತ್ತವೆ.

ವರ್ಷ	ಗುರಿ		ಸಾಧನೆ	
	ಭೌತಿಕ ಗುರಿ	ಆರ್ಥಿಕ ಗುರಿ	ಭೌತಿಕ ಸಾಧನೆ	ಆರ್ಥಿಕ ಸಾಧನೆ
2019-20	22,327	718 ಲಕ್ಷ	27,557	1069 ಲಕ್ಷ

IV. ಬಾಲ ಕಾರ್ಮಿಕ ಯೋಜನೆ.

ಕರ್ನಾಟಕ ಸರ್ಕಾರದ ಕಾರ್ಮಿಕ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಬಾಲಕಾರ್ಮಿಕ ಪುನರ್ವಸತಿ ಯೋಜನೆಯಡಿ ಅಪಾಯಕಾರಿ ಮತ್ತು ಅಪಾಯಕಾರಿಯಲ್ಲದ ಕೆಲಸಗಳಲ್ಲಿ ತೊಡಗಿರುವ ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆಯ ಕಾರ್ಮಿಕರನ್ನು ಕೆಲಸದಿಂದ ಬಿಡುಗಡೆಗೊಳಿಸಿ, ಪುನರ್ವಸತಿಗೊಳಿಸಲು ಮತ್ತು ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆ ಕಾರ್ಮಿಕ ಪದ್ಧತಿ ಕುರಿತು ಜನಜಾಗೃತಿ ಮೂಡಿಸಲು ಹಲವಾರು ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುತ್ತದೆ.

ಬಾಲಕಾರ್ಮಿಕ ಪುನರ್ವಸತಿ ಯೋಜನೆ ಗುರಿಗಳು ಈ ಕೆಳಕಂಡಂತೆ ಇರುತ್ತವೆ;

1. ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಸಹಾಯಕವಾಗುವ ಯಾವುದೇ ಚಟುವಟಿಕೆಯನ್ನು ಕೈಗೊಳ್ಳುವುದು.
2. ಬಾಲಕಾರ್ಮಿಕ ಪದ್ಧತಿಗೆ ಸಂಬಂಧಿಸಿದ ವಿಷಯಗಳಿಗೆ ಸಂಬಂಧಿಸಿದಂತೆ ಸರ್ಕಾರ ತೆಗೆದುಕೊಳ್ಳಬೇಕಾದ ನೀತಿ

ನಿರ್ಧಾರಗಳ ಬಗ್ಗೆ ಸಲಹೆ / ಸೂಚನೆ ನೀಡುವುದು.

3. ಅಪಾಯಕಾರಿ ಮತ್ತು ಅಪಾಯಕಾರಿಯಲ್ಲದ ಹಾಗೂ ಇತರ ಕೆಲಸಗಳಿಂದ ಬಿಡುಗಡೆ ಮಾಡಲಾದ ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆಯ ಕಾರ್ಮಿಕ ಮಕ್ಕಳನ್ನು ಪುನರ್ವಸತಿ ಕಲ್ಪಿಸುವುದು.
4. ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ ಕಾಯ್ದೆ) 1986 ಮತ್ತು ಕರ್ನಾಟಕ ಅಂಗಡಿಗಳು ಮತ್ತು ವಾಣಿಜ್ಯ ಸಂಸ್ಥೆಗಳ ಕಾಯ್ದೆ, 1961 ರ ಅನುಷ್ಠಾನದಲ್ಲಿ ಭಾಗಿಯಾಗಿರುವ ಎಲ್ಲಾ ಪಾಲುದಾರರ ಕೌಶಲ್ಯಗಳ ಶ್ರೇಣೀಕರಣವನ್ನು ಸುಲಭಗೊಳಿಸುವುದು ಮತ್ತು ಕಾಲಕಾಲಕ್ಕೆ ಅನ್ವಯವಾಗುವ ಇತರ ಬಾಲಕಾರ್ಮಿಕ ಕಾನೂನುಗಳ ಜಾರಿಗೊಳಿಸುವಿಕೆಯನ್ನು ಹೆಚ್ಚಿಸುವುದು.
5. ರಾಜ್ಯವು ಪ್ರಾರಂಭಿಸಿದ ಬಾಲ ಕಾರ್ಮಿಕ ಪದ್ಧತಿಗಾಗಿ ಕ್ರಿಯಾ ಯೋಜನೆ ಅನುಷ್ಠಾನದಲ್ಲಿ ಸಂಬಂಧಪಟ್ಟವರಿಂದ ಶಿಸ್ತು ಮತ್ತು ಹೊಣೆಗಾರಿಕೆಯ ಮೇಲ್ವಿಚಾರಣೆ ಮಾಡುವುದು ಇನ್ನು ಮುಂತಾದವು.

ಬಾಲಕಾರ್ಮಿಕ ಪುನರ್ವಸತಿ ಯೋಜನೆಯ ಸಾಧನೆಯ ವಿವರಗಳು ಈ ಕೆಳಕಂಡಂತೆ ಇರುತ್ತವೆ;

- ಪ್ರತಿ ಜಿಲ್ಲೆಯಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಗಳನ್ನು, ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ, 1986ರ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಸ್ಥಾಪಿಸಲಾಗಿರುತ್ತದೆ.

- 6 ರಿಂದ 14 ವರ್ಷದೊಳಗಿನ ಮಕ್ಕಳು ಯಾವುದೇ ಉದ್ಯೋಗ ಅಥವಾ ಪ್ರಕ್ರಿಯೆಗಳಲ್ಲಿ ಹಾಗೂ 18 ವರ್ಷ ವಯಸ್ಸಿನವರೆಗಿನ ಕಿಶೋರರು ಅಪಾಯಕಾರಿ ಉದ್ದಿಮೆಗಳಲ್ಲಿ ದುಡಿಯುವುದು ಕಂಡುಬಂದಲ್ಲಿ ಕೆಲಸದಿಂದ ಬಿಡಿಸಿ ಯೋಜನೆಯಡಿ ನಡೆಸುವ ವಿಶೇಷ ತರಬೇತಿ ಕೇಂದ್ರಗಳಿಗೆ ಸೇರಿಸಿ, ಸದರಿ ತರಬೇತಿ ಕೇಂದ್ರಗಳಲ್ಲಿ ಅವರಿಗೆ ಸೇತು-ಶಿಕ್ಷಣ, ವೃತಿ ತರಬೇತಿ, ಶಿಷ್ಯ ವೇತನ, ಆರೋಗ್ಯ ರಕ್ಷಣೆ ಹಾಗೂ ಮನೋರಂಜನಾ ವ್ಯವಸ್ತೆಯನ್ನಾ ಒದಗಿಸಿ ಅವರನ್ನು ಔಪಚಾರಿಕ ಶಿಕ್ಷಣ ವ್ಯವಸ್ಥೆಯಲ್ಲಿ ವಿಲೀನಗೊಳಿಸಲು ಕ್ರಮ ಕೈಗೊಳ್ಳಲಾಗುತ್ತದೆ. ಈ

		ನಿಟ್ಟಿನಲ್ಲಿ ರಾಷ್ಟ್ರೀಯ ಬಾಲ ಕಾರ್ಮಿಕ ಯೋಜನೆ ಹಾಗೂ ರಾಜ್ಯ ಬಾಲ ಕಾರ್ಮಿಕ ಯೋಜನೆಗಳನ್ನು ಜಾರಿಗೆ ತರಲಾಗಿರುತ್ತದೆ. a. **ರಾಷ್ಟ್ರೀಯ ಬಾಲ ಕಾರ್ಮಿಕ ಯೋಜನೆ (ಎನ್.ಸಿ.ಎಲ್.ಪಿ):** ಕೇಂದ್ರ ಸರ್ಕಾರವು ಈ ಯೋಜನೆಯನ್ನು 1988ರಲ್ಲಿ ಪ್ರಾರಂಭಿಸಿದ್ದು, ಪ್ರಸಕ್ತವಾಗಿ ರಾಜ್ಯದ ಹದಿನೇಳು(17) ಜಿಲ್ಲೆಗಳಲ್ಲಿ ಜಾರಿಯಲ್ಲಿರುತ್ತದೆ. b. **ರಾಜ್ಯ ಬಾಲ ಕಾರ್ಮಿಕ ಯೋಜನೆ (ಎಸ್.ಸಿ.ಎಲ್.ಪಿ):** ಈ ಯೋಜನೆಯನ್ನು 2001ರಲ್ಲಿ ಪ್ರಾರಂಬಿಸಿದ್ದು, ಪ್ರಸ್ತುತ ರಾಜ್ಯದ ಹದಿಮೂರು(13) ಜಿಲ್ಲೆಗಳಲ್ಲಿ ಜಾರಿಯಲ್ಲಿದೆ. • ಬಾಲ್ಯಾವಸ್ಥೆಯ ಹಾಗೂ ಕಿಶೋರಾವಸ್ಥೆಯ ಕಾರ್ಮಿಕ ಮುಕ್ತ ಜಿಲ್ಲೆಗಳ ಘೋಷಣೆ ಹೊರಡಿಸಲು ಅವಶ್ಯವಿರುವ " *MEMORANDUM OF STANDARD OPERATING PROCEDURES (MSOPs)" FOR DISTRICT ADMINISTRATION TO DECLARAE A DISTRICT AS "CHILD AND ADOLOSCENT LABOUR FREE ZONE-CALFZ"* ಅನ್ನು ಸಿದ್ಧಪಡಿಸಿ ಕರ್ನಾಟಕ ರಾಜ್ಯ ಪತ್ರದಲ್ಲಿ ದಿನಾಂಕ:09/11/2017 ರಂದು ಪ್ರಕಟಿಸಲಾಗಿರುತ್ತದೆ ಹಾಗೂ ಜಿಲ್ಲಾಧಿಕಾರಿಗಳ ಮೂಲಕ ಅನುಷ್ಠಾನಕ್ಕಾಗಿ ಕ್ರಮಕೈಗೊಳ್ಳಲಾಗುತ್ತಿದೆ. • ಬಾಲ್ಯಾವಸ್ಥೆಯ ಹಾಗೂ ಕಿಶೊರಾವಸ್ಥೆಯ ಕಾರ್ಮಿಕ (ನಿಷೇಧ ಹಾಗೂ ನಿಯಂತ್ರಣ) 1986ರ ಪರಿಷ್ಕೃತ ಕಾಯ್ದೆಯ ಕಲಂ 14ಃರಡಿ " **ಬಾಲಕಾರ್ಮಿಕ ಹಾಗೂ ಕಿಶೋರಕಾರ್ಮಿಕ ಪುನರ್ವಸತಿ ನಿಧಿ"ಯನ್ನು** ಸರ್ಕಾರವು ಅಧಿಸೂಚನೆ ಸಂಖ್ಯೆ ಎಲ್ ಡಿ 124 ಸಿಎಲ್‌ಸಿ 2016, ರನ್ವಯ ಸ್ಥಾಪಿಸಲಾಗಿರುತ್ತದೆ. • ಪ್ರತಿ ಜಿಲ್ಲೆಯಲ್ಲಿ ಕಾಲಕಾಲಕ್ಕೆ ನಿರಂತರವಾದ ಯೋಜಿತ ಹಾಗೂ ಅನಿರೀಕ್ಷಿತ ದಾಳಿಗಳನ್ನು ಇಲಾಖೆಯ ಅಧಿಕಾರಿಗಳು ಮತ್ತು ನಿರೀಕ್ಷಕರು ಮತ್ತು ಕಾಯ್ದೆಯ ಕಲಂ–17ರಡಿ ನೇಮಕಗೊಂಡ ನಿರೀಕ್ಷಕರು ನಡೆಸುತ್ತಿದ್ದು, ಬಾಲಕಾರ್ಮಿಕರನ್ನು ಪತ್ತೆ ಹಚ್ಚಿ ಅವರನ್ನು ಕೆಲಸದಿಂದ ಬಿಡುಗಡೆಗೊಳಿಸಿ ನಿಯಮಾನುಸಾರ ಕ್ರಮಕೈಗೊಳ್ಳಲಾಗುತ್ತಿದೆ. • 2019ರಲ್ಲಿ ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ, 1986ರಡಿಯಲ್ಲಿ 2239

1220

		ತಪಾಸಣೆಗಳನ್ನು ನಡೆಸಲಾಗಿರುತ್ತದೆ. 48 ಬಾಲಕಾರ್ಮಿಕರನ್ನು ಪತ್ತೆಹಚ್ಚಿ ಪುನರ್ವಸತಿಗೊಳಿಸಲಾಗಿರುತ್ತದೆ. 46 ಪ್ರಕರಣಗಳ ವಿವಿಧ ನ್ಯಾಯಾಲಯಗಳಲ್ಲಿ ಮೊಕದ್ದಮೆ ದಾಖಲಿಸಲಾಗಿದ್ದು, 1 ಪ್ರಕರಣಗಳಲ್ಲಿ ಶಿಕ್ಷೆಯಾಗಿರುತ್ತದೆ. ರೂ. 80,000/–ಗಳ ದಂಡ ವಸೂಲಾತಿಯಾಗಿರುತ್ತದೆ. • 2019–20ನೇ ಸಾಲಿನಲ್ಲಿ ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆ ಕಾರ್ಮಿಕ ಪದ್ಧತಿ ನಿರ್ಮೂಲನೆ ಕುರಿತು ರಾಜ್ಯಾದ್ಯಂತ 557 ಬೀದಿ ನಾಟಕಗಳು, 1976 ಗೋಡೆ ಬರಹಗಳು, 185307 ಕರಪತ್ರಗಳು, 283 ಆಟೋ ಪ್ರಚಾರಗಳು, 298 ಕಾನೂನು ಅರಿವು–ನೆರವು ಕಾರ್ಯಕ್ರಮಗಳು, 57201 ಬಿತ್ತಿ ಪತ್ರಗಳನ್ನು ಮುದ್ರಿಸಿ ಹಂಚುವುದು, 59 ತರಬೇತಿ ಕಾರ್ಯಾಗಾರಗಳು ಸೇರಿದಂತೆ ಇನ್ನಿತರ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ. • **ದೂರು ನಿರ್ವಹಣಾ ವ್ಯವಸ್ಥೆ:**– ಬಾಲಕಾರ್ಮಿಕ ಸಹಾಯವಾಣಿ '1098' ಹಾಗೂ ಸಹಾಯವಾಣಿ ಸಂಖ್ಯೆ: 080–29752833ರ ಮೂಲಕ ಬಾಲಕಾರ್ಮಿಕರ ಹಾಗೂ ಕಿಶೋರ ಕಾರ್ಮಿಕರ ಇರುವಿಕೆಯ ಬಗ್ಗೆ ದೂರು ಸ್ವೀಕರಿಸಿ, ಸ್ವೀಕರಿಸಲಾದ ದೂರುಗಳ ಬಗ್ಗೆ ಕಾನೂನಿನ್ವಯ ಮಕ್ಕಳನ್ನು ಕೆಲಸದಿಂದ ಬಿಡುಗಡೆಗೊಳಿಸಲು, ಪುನರ್ವಸತಿ ಕಲ್ಪಿಸಲು ಹಾಗೂ ಅವರ ಸ್ವ–ಸ್ಥಾನಕ್ಕೆ ಕಳುಹಿಸಲು ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. • **ಜನ ಜಾಗೃತಿ ಕಾರ್ಯಕ್ರಮಗಳು:** i. ಪ್ರತಿ ವರ್ಷ **ಜೂನ್ 12** ರಂದು, **"ವಿಶ್ವ ಬಾಲ ಕಾರ್ಮಿಕ ಪದ್ದತಿ ವಿರೋದಿ ದಿನಾಚರಣೆ"** ಯನ್ನು ರಾಜ್ಯ, ಜಿಲ್ಲೆ ಮತ್ತು ತಾಲ್ಲೂಕು ಮಟ್ಟಗಳಲ್ಲಿ ಎಲ್ಲಾ ಭಾಗೀದಾರರು ಹಾಗೂ ಫಲಾನುಭವಿಗಳ ಸಹಯೋಗದೊಂದಿಗೆ ಆಯೋಜಿಸಲಾಗುತ್ತಿದೆ. ii. **ಕಾನೂನು ಅರಿವು–ನೆರವು ಕಾರ್ಯಕ್ರಮಗಳು:** ಸರ್ಕಾರೇತರ ಸಂಸ್ಥೆಗಳ ಹಾಗೂ ಎಲ್ಲಾ ಭಾಗೀದಾರರ ಸಹಯೋಗದೊಂದಿಗೆ ಕಾನೂನು ಅರಿವು–ನೆರವು ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. iii. **ತರಬೇತಿ ಕಾರ್ಯಕ್ರಮಗಳು:** ಎಲ್ಲಾ ಅಧಿಸೂಚಿತ ನಿರೀಕ್ಷಕರಿಗೆ ಹಾಗೂ ಬಾಲಕಾರ್ಮಿಕ/ ಕಿಶೋರ ಕಾರ್ಮಿಕ ಪದ್ದತಿ ನಿರ್ಮೂಲನೆಯಲ್ಲಿ ಭಾಗೀದಾರರಿಗೆ ತರಬೇತಿ

		ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. iv.**ಜಾಥಾ ಹಾಗೂ ಬೀದಿನಾಟಕಗಳ ಆಯೋಜನೆ:** ಬಾಲಕಾರ್ಮಿಕ ಕಿಶೋರ ಕಾರ್ಮಿಕರ ಪದ್ಧತಿಯ ನಿರ್ಮೂಲನೆಗಾಗಿ ಅರಿವು ಮೂಡಿಸುವ ಸಲುವಾಗಿ ಜಿಲ್ಲೆ ಹಾಗೂ ತಾಲ್ಲೂಕು ಮಟ್ಟಗಳಲ್ಲಿ ಜಾಥಾ ಹಾಗೂ ಬೀದಿನಾಟಕಗಳನ್ನು ಆಯೋಜಿಸಲಾಗುತ್ತಿದೆ. v.ಗೋಡೆ ಬರಹಗಳನ್ನು ಹಾಗೂ ಸ್ಟಿಕರ್‌ಗಳು ಹಾಗೂ ಕರಪತ್ರಗಳನ್ನು ಹಂಚಲಾಗಿರುತ್ತದೆ.
ಆ)	ಅಸಂಘಟಿತ ಕಾರ್ಮಿಕರುಗಳಿಗೆ ಕುಲವೃತ್ತಿ ಮತ್ತು ಸಾಂಪ್ರದಾಯಿಕ ವೃತ್ತಿನಿರತ ಕಾರ್ಮಿಕರುಗಳಿಗೆ ಸರಳ/ ಸುಲಭ ವಿಧಾನಗಳ ಅನುಸರಣೆಗಳ ಮೂಲಕ ಒದಗಿಸಿಕೊಡಲಾಗುತ್ತಿರುವ ಸೌಲಭ್ಯ/ ಸೌಕರ್ಯಗಳು ಯಾವುವು	**<u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ</u>** ಉಪ ಪ್ರಶ್ನೆ (ಅ)ಯಲ್ಲಿ ವಿವರಿಸಿರುವಂತೆ ಮಂಡಳಿಯು ಜಾರಿಗೊಳಿಸುತ್ತಿರುವ ವಿವಿಧ ಯೋಜನೆಗಳಡಿ ಫಲಾನುಭವಿಗಳಿಗೆ ಸೌಲಭ್ಯಗಳನ್ನು ಈ ಕೆಳಕಂಡ ಸರಳ ವಿಧಾನದ ಮೂಲಕ ನೀಡಲಾಗುತ್ತಿದೆ. 1. **<u>ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ:-</u>** **<u>ಅ) ಅಪಘಾತ ಪರಿಹಾರ ಸೌಲಭ್ಯ:-</u>** ಈ ಕೆಳಕಂಡ ದಾಖಲೆಗಳನ್ನು ಸಲ್ಲಿಸಬೇಕಾಗುತ್ತದೆ. • ನಿಗದಿತ ಅರ್ಜಿ ಭರ್ತಿ ಮಾಡುವುದು. • ಪ್ರಥಮ ವರ್ತಮಾನ ವರದಿ, ಮರಣೋತ್ತರ ಪರೀಕ್ಷಾ ವರದಿ, ಮರಣ ಪ್ರಮಾಣ ಪತ್ರ ಮತ್ತು ಊರ್ಜಿತ ಚಾಲನಾ ಪರವಾನಗಿ ಸಲ್ಲಿಸುವುದು. • ಅವಶ್ಯಕವಿದಲ್ಲಿ ವೈದ್ಯಕೀಯ ಪ್ರಮಾಣ ಪತ್ರ ಮತ್ತು ಆಸ್ಪತ್ರೆ ವೆಚ್ಚ ಪಾವತಿಯ ಕುರಿತು ರಸೀದಿ ಸಲ್ಲಿಸುವುದು. • ಸಲ್ಲಿಸಿದ ವರದಿಗಳನ್ನು ಸ್ಥಳೀಯ ಜಿಲ್ಲಾ ಕಾರ್ಮಿಕ ಅಧಿಕಾರಿಗಳ ಮೂಲಕ ಪರಿಶೀಲಿಸಿ ನಿಗದಿ ಪಡಿಸಿದಿ ಪರಿಹಾರದ ಮೊತ್ತವನ್ನು ಫಲಾನುಭವಿಗಳ ಬ್ಯಾಂಕ್ ಖಾತೆಗೆ ನೇರವಾಗಿ ಡಿಬಿಟಿ ಮೂಲಕ ವರ್ಗಾಯಿಸಲಾಗುವುದು. **<u>ಆ) ಶೈಕ್ಷಣಿಕ ಧನ ಸಹಾಯ:-</u>** ಈ ಕೆಳಕಂಡ ದಾಖಲೆಗಳನ್ನು ಸಲ್ಲಿಸಬೇಕಾಗುತ್ತದೆ. • ನಿಗದಿತ ಅರ್ಜಿ ಭರ್ತಿ ಮಾಡುವುದು.

1220

		• ಹಿಂದಿನ ತರಗತಿಯಲ್ಲಿ ಉತ್ತೀರ್ಣರಾದ ಅಂಕ ಪಟ್ಟಿ. • ವ್ಯಾಸಂಗ ಪ್ರಮಾಣ ಪತ್ರ. • ಬ್ಯಾಂಕ್ ಖಾತೆ ವಿವರ. • ಚಾಲಕನ ಚಾಲನ ಪ್ರಮಾಣ ಪತ್ರ. • ದಾಖಲೆಗಳನ್ನು ಪರಿಶೀಲಿಸಿ ನಿಗದಿತ ಮೊತ್ತವನ್ನು ಫಲಾನುಭವಿಗಳ ಬ್ಯಾಂಕ್ ಖಾತೆಗೆ ಡಿಬಿಟಿ ಮೂಲಕ ವರ್ಗಾಯಿಸಲಾಗುವುದು. 2. **ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ:-** **ಅ) ಸ್ಮಾರ್ಟ್ ಕಾರ್ಡ್ ವಿತರಣೆ:-** ಈ ಸೌಲಭ್ಯ ಪಡೆಯಲು ಕೆಳಕಂಡ ದಾಖಲೆಗಳನ್ನು ಸಲ್ಲಿಸಬೇಕಾಗುತ್ತದೆ. • ನಿಗದಿತ ಅರ್ಜಿ ಭರ್ತಿ ಮಾಡುವುದು. • ಆಧಾರ್ ಕಾರ್ಡ್ ಪ್ರತಿ. • ಬ್ಯಾಂಕ್ ಖಾತೆ ವಿವರ. • ಜನ್ಮ ದಿನಾಂಕದ ದಾಖಲೆ. • ಪಾಸ್ ಪೋರ್ಟ್ ಅಳತೆಯ ಇತ್ತೀಚಿನ ಭಾವ ಚಿತ್ರ, **ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ** ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ನೋಂದಾಯಿತ ಕಟ್ಟಡ ಕಾರ್ಮಿಕರಿಗೆ ಹಲವಾರು ರೀತಿಯ ಕಲ್ಯಾಣ ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ನೀಡಲಾಗುತ್ತಿದೆ. ಮಂಡಳಿಯಿಂದ ನೀಡಲಾಗುತ್ತಿರುವ ಸೌಲಭ್ಯಗಳ ವಿವರಗಳನ್ನು **ಅನುಬಂಧ-3**ರಲ್ಲಿ ಲಗತ್ತಿಸಿದೆ. ನೋಂದಾಯಿತ ಕಟ್ಟಡ ಕಾರ್ಮಿಕರು ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ (ಉದ್ಯೋಗದ ಕ್ರಮೀಕರಣ ಮತ್ತು ಸೇವಾ ಷರತ್ತುಗಳು) ಕಾಯ್ದೆ, 1996 ಹಾಗೂ ಕರ್ನಾಟಕ ನಿಯಮಗಳು 2006 ಪ್ರಾವಧಾನಗಳಡಿ ವಿಧಿಸಿರುವ ಷರತ್ತುಗಳನ್ನು ಪೂರೈಸಿದ್ದಲ್ಲಿ ನಿಗಧಿತ ನಮೂನೆಯಲ್ಲಿ ಅರ್ಜಿಗಳನ್ನು ಸೇವಾ ಸಿಂಧು ಪೋರ್ಟಲ್ ಮೂಲಕ ಸಲ್ಲಿಸಬೇಕಾಗಿರುತ್ತದೆ. ಅವರ ಅರ್ಜಿಗಳನ್ನು ಪರಿಶೀಲಿಸಿ ಅರ್ಹ ಫಲಾನುಭವಿಗಳಿಗೆ ಅವರ ಬ್ಯಾಂಕ್ ಖಾತೆಗಳಿಗೆ ಆರ್‌ಟಿಜಿಎಸ್ ಮೂಲಕ ಸಹಾಯಧನವನ್ನು ವರ್ಗಾಯಿಸಲಾಗುತ್ತದೆ.

ಕಾಇ 313 ಎಲ್‌ಇಟಿ 2020

(ಅರಬೈಲ್ ಶಿವರಾಂ ಹೆಬ್ಬಾರ್)
ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು

ಅನುಬಂಧ–03

ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿವತಿಯಿಂದ ಫಲಾನುಭವಿಗಳಿಗೆ ಸಿಗುವ ಸೌಲಭ್ಯಗಳು

1. ಪಿಂಚಣಿ ಸೌಲಭ್ಯ: ಮೂರು ವರ್ಷ ಸದಸ್ಯತ್ವದೊಂದಿಗೆ 60 ವರ್ಷ ಪೂರೈಸಿದ ಫಲಾನುಭವಿಗೆ ಮಾಸಿಕ ರೂ.2,000/-
2. ಕುಟುಂಬ ಪಿಂಚಣಿ ಸೌಲಭ್ಯ: ಮೃತ ಪಿಂಚಣಿದಾರರ ಪತಿ / ಪತ್ನಿ ಮಾಸಿಕ ರೂ.1000/-
3. ದುರ್ಬಲತೆ ಪಿಂಚಣಿ: ನೋಂದಾಯಿತ ಫಲಾನುಭವಿಯು ಖಾಯಿಲೆಗಳಿಂದ ಅಥವಾ ಕಟ್ಟಡ ಕಾಮಗಾರಿಗಳ ಅಪಘಾತದಿಂದ ಶಾಶ್ವತ/ಭಾಗಶಃ ಅಂಗವಿಕಲತೆ ಹೊಂದಿದ್ದರೆ ಮಾಸಿಕ ರೂ.2,000/- ಪಿಂಚಣಿ ಹಾಗೂ ಶೇಕಡವಾರು ದುರ್ಬಲತೆಯನ್ನಾಧರಿಸಿ ರೂ.2,00,000/- ದವರೆಗೆ ಅನುಗ್ರಹ ರಾಶಿ ಸಹಾಯಧನ.
4. ಕನ್ನಡಕ, ಶ್ರವಣಯಂತ್ರ, ಕೃತಕ ಕೈಕಾಲು ಮತ್ತು ಗಾಲಿ ಕುರ್ಚಿ ಮರುಪಾವತಿ ಸೌಲಭ್ಯ
5. ಟ್ರೈನಿಂಗ್-ಕಮ್-ಟೂಲ್‌ಕಿಟ್ ಸೌಲಭ್ಯ (ಶ್ರಮ ಸಾಮರ್ಥ್ಯ) : ರೂ.30,000/- ವರೆಗೆ
6. ಶ್ರಮ ಸಂಸಾರ ಸಾಮರ್ಥ್ಯ ತರಬೇತಿ ಸೌಲಭ್ಯ: ನೋಂದಾಯಿತ ಫಲಾನುಭವಿಯ ಅವಲಂಭಿತರಿಗೆ
7. ವಸತಿ ಸೌಲಭ್ಯ (ಕಾರ್ಮಿಕ ಗೃಹ ಭಾಗ್ಯ): ರೂ.2,00,000/- ದವರೆಗೆ ಮುಂಗಡ ಸೌಲಭ್ಯ
8. ಹೆರಿಗೆ ಸೌಲಭ್ಯ (ತಾಯಿ ಲಕ್ಷ್ಮೀ ಬಾಂಡ್): ಮಹಿಳಾ ಫಲಾನುಭವಿಯ ಮೊದಲ ಎರಡು ಮಕ್ಕಳಿಗೆ ಹೆಣ್ಣು ಮಗುವಿನ ಜನನಕ್ಕೆ ರೂ. 30,000/- ಮತ್ತು ಗಂಡು ಮಗುವಿನ ಜನನಕ್ಕೆ ರೂ.20,000/-
9. ಶಿಶು ಪಾಲನಾ ಸೌಲಭ್ಯ:
10. ಅಂತ್ಯಕ್ರಿಯೆ ವೆಚ್ಚ : ರೂ.4,000/- ಹಾಗೂ ಅನುಗ್ರಹ ರಾಶಿ ರೂ.50,000/-ಸಹಾಯಧನ
11. ಶೈಕ್ಷಣಿಕ ಸಹಾಯಧನ (ಕಲಿಕೆ ಭಾಗ್ಯ): ಫಲಾನುಭವಿಯ ಇಬ್ಬರು ಮಕ್ಕಳ ವಿದ್ಯಾಭ್ಯಾಸಕ್ಕಾಗಿ:

ಕ್ರಸಂ	ತರಗತಿ (ಉತ್ತೀರ್ಣಕ್ಕೆ)	ವಾರ್ಷಿಕ ಸಹಾಯ ಧನ	
		ಗಂಡು	ಹೆಣ್ಣು
I.	ನರ್ಸರಿ	3,000	4,000
II.	1 ರಿಂದ 4ನೇ ತರಗತಿ	3,000	4,000
III.	5 ರಿಂದ 8ನೇ ತರಗತಿ	5,000	6,000
IV.	9 ಹಾಗೂ 10ನೇ ತರಗತಿ	10,000	11,000
V.	ಪ್ರಥಮ ಪಿಯುಸಿ ಮತ್ತು ದ್ವಿತೀಯ ಪಿ.ಯು.ಸಿ	10,000	14,000
VI.	ಐಟಿಐ	12,000	15,000
VII.	ಪದವಿ ಪ್ರತಿ ವರ್ಷಕ್ಕೆ	15,000	20,000
VIII.	ಸ್ನಾತಕೋತ್ತರ ಪದವಿ ಸೇರ್ಪಡೆಗೆ	20,000	20,000
	ಮತ್ತು ಪ್ರತಿ ವರ್ಷಕ್ಕೆ	20,000	25,000
IX.	ಇಂಜಿನಿಯರಿಂಗ್ ಕೋರ್ಸ್ ಬಿಇ/ ಬಿ.ಟೆಕ್ ಸೇರ್ಪಡೆಗೆ	25,000	25,000
	ಮತ್ತು ಪ್ರತಿ ವರ್ಷಕ್ಕೆ	25,000	30,000
X.	ವೈದ್ಯಕೀಯ ಕೋರ್ಸ್‌ಗೆ ಸೇರ್ಪಡೆಗೆ	30,000	30,000
	ಮತ್ತು ಪ್ರತಿ ವರ್ಷಕ್ಕೆ	40,000	50,000
XI.	ಡಿಪ್ಲೋಮಾ	15,000	20,000
XII.	ಎಂ.ಟೆಕ್ / ಎಂ.ಇ	30,000	35,000
XIII.	ಎಂ.ಡಿ (ವೈದ್ಯಕೀಯ)	45,000	55,000
XIV.	ಪಿಹೆಚ್‌ಡಿ (ಪ್ರತಿ ವರ್ಷಕ್ಕೆ) ಗರಿಷ್ಠ 03 ವರ್ಷ	25,000	30,000

12. **ವೈದ್ಯಕೀಯ ಸಹಾಯಧನ (ಕಾರ್ಮಿಕ ಆರೋಗ್ಯ ಭಾಗ್ಯ):** ನೋಂದಾಯಿತ ಫಲಾನುಭವಿ ಹಾಗೂ ಅವರ ಅವಲಂಭಿತರಿಗೆ **ರೂ.300/-** ರಿಂದ **ರೂ.10,000/-ವರೆಗೆ**
13. **ಅಪಘಾತ ಪರಿಹಾರ:** ಮರಣ ಹೊಂದಿದ್ದಲ್ಲಿ **ರೂ.5,00,000/-**, ಸಂಪೂರ್ಣ ಶಾಶ್ವತ ದುರ್ಬಲತೆಯಾದಲ್ಲಿ **ರೂ.2,00,000/-** ಮತ್ತು ಭಾಗಶಃ ಶಾಶ್ವತ ದುರ್ಬಲತೆಯಾದಲ್ಲಿ **ರೂ.1,00,000/-**
14. **ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕ ಚಿಕಿತ್ಸಾ ಭಾಗ್ಯ):** ಹೃದ್ರೋಗ, ಕಿಡ್ನಿ ಜೋಡಣೆ, ಕ್ಯಾನ್ಸರ್ ಶಸ್ತ್ರಚಿಕಿತ್ಸೆ, ಕಣ್ಣಿನ ಶಸ್ತ್ರಚಿಕಿತ್ಸೆ, ಪಾರ್ಶ್ವವಾಯು, ಮೂಳೆ ಶಸ್ತ್ರಚಿಕಿತ್ಸೆ, ಗರ್ಭಕೋಶ ಶಸ್ತ್ರಚಿಕಿತ್ಸೆ, ಅಸ್ತಮ ಚಿಕಿತ್ಸೆ, ಗರ್ಭಪಾತ ಪ್ರಕರಣಗಳು, ಪಿತ್ತಕೋಶದ ತೊಂದರೆಗೆ ಸಂಬಂಧಿತ ಚಿಕಿತ್ಸೆ, ಮೂತ್ರ ಪಿಂಡದಲ್ಲಿನ ಕಲ್ಲು ತೆಗೆಯುವ ಚಿಕಿತ್ಸೆ, ಮೆದುಳಿನ ರಕ್ತಸ್ರಾವದ ಚಿಕಿತ್ಸೆ, ಅಲ್ಸರ್ ಚಿಕಿತ್ಸೆ, ಡಯಾಲಿಸಿಸ್ ಚಿಕಿತ್ಸೆ, ಕಿಡ್ನಿ ಶಸ್ತ್ರಚಿಕಿತ್ಸೆ, ಇ.ಎನ್.ಟಿ. ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ನರರೋಗ ಶಸ್ತ್ರಚಿಕಿತ್ಸೆ, ವ್ಯಾಸ್ಕ್ಯೂಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಕರುಳಿನ ಶಸ್ತ್ರಚಿಕಿತ್ಸೆ, ಸ್ತನ ಸಂಬಂಧಿತ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಹರ್ನಿಯ ಶಸ್ತ್ರಚಿಕಿತ್ಸೆ, ಅಪೆಂಡಿಕ್ಸ್ ಶಸ್ತ್ರಚಿಕಿತ್ಸೆ, ಮೂಳೆ ಮುರಿತ/ಡಿಸ್‌ಲೊಕೇಶನ್ ಚಿಕಿತ್ಸೆ, ಇತರೆ ಔದ್ಯೋಗಿಕ ಖಾಯಿಲೆಗಳ ಚಿಕಿತ್ಸೆಗಳಿಗೆ **ರೂ.2,00,000/-ವರೆಗೆ**
15. **ಮದುವೆ ಸಹಾಯಧನ (ಗೃಹ ಲಕ್ಷ್ಮೀ ಬಾಂಡ್):** ಫಲಾನುಭವಿ ಅಥವಾ ಅವರ ಇಬ್ಬರು ಮಕ್ಕಳ ಮದುವೆಗೆ ತಲಾ **ರೂ.50,000/-**
16. **ಐಕಲು ಸಂಪರ್ಕ ಸೌಲಭ್ಯ (ಕಾರ್ಮಿಕ ಅನಿಲ ಭಾಗ್ಯ):** ಅನಿಲ ಸಂಪರ್ಕದೊಂದಿಗೆ ಎರಡು ಬರ್ನರ್ ಸ್ಟೌವ್
17. **ಬಿಎಂಟಿಸಿ ಬಸ್ ಪಾಸ್ ಸೌಲಭ್ಯ:** ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕೆಲಸ ಮಾಡುತ್ತಿರುವಂತಹ / ವಾಸಸ್ಥಳದಿಂದ ಬೆಂಗಳೂರಿಗೆ ಪ್ರಯಾಣಿಸುವ ನೋಂದಾಯಿತ ಕಟ್ಟಡ ಕಾರ್ಮಿಕರಿಗೆ
18. **ಕೆಎಸ್‌ಆರ್‌ಟಿಸಿ ಬಸ್ ಪಾಸ್‌ನ ಸೌಲಭ್ಯ:** ರಾಜ್ಯದಾದ್ಯಂತ ವಿದ್ಯಾಭ್ಯಾಸದಲ್ಲಿ ತೊಡಗಿರುವ ನೋಂದಾಯಿತ ಕಾರ್ಮಿಕರ ಇಬ್ಬರು ಮಕ್ಕಳಿಗೆ (ಈ ಯೋಜನೆಯನ್ನು ಜಾರಿಗೊಳಿಸಲಾಗುತ್ತಿದೆ)
19. **ತಾಯಿ ಮಗು ಸಹಾಯ ಹಸ್ತ:** ಮಹಿಳಾ ಫಲಾನುಭವಿಯು ಮಗುವಿಗೆ ಜನ್ಮ ನೀಡಿದ ಸಂದರ್ಭದಲ್ಲಿ ಆಕೆಯ ಮಗುವಿನ ಶಾಲಾ ಪೂರ್ವ ಶಿಕ್ಷಣ ಮತ್ತು ಪೌಷ್ಠಿಕತೆಗಾಗಿ ಮಗುವಿಗೆ ಮೂರು ವರ್ಷಗಳು ತುಂಬುವವರೆಗೆ ವಾರ್ಷಿಕ **ರೂ.6,000/-** ಗಳ ಸಹಾಯಧನ.

ಅನುಬಂಧ-01

2007 ರಿಂದ ಆಗಸ್ಟ್-2020 ರವರೆಗೆ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳಡಿಯಲ್ಲಿ ವಿತರಿಸಲಾದ ವರ್ಷವಾರು ಸಾಧನೆಯ ವಿವರ

ಸೌಲಭ್ಯಗಳ ವಿವರ	2007-08 ರಿಂದ 2012-13 ರವರೆಗೆ		2013-14 ರಿಂದ 2017-18 ರವರೆಗೆ		2018-19		2019-20		2020-21		ಒಟ್ಟು	
	ಸಂಖ್ಯೆ	ಮೊತ್ತ	ಸಂಖ್ಯೆ	ಮೊತ್ತ	ಸಂಖ್ಯೆ	ಮೊತ್ತ	ಸಂಖ್ಯೆ	ಮೊತ್ತ	ಸಂಖ್ಯೆ	ಮೊತ್ತ	ಸಂಖ್ಯೆ	ಮೊತ್ತ
ಶೈಕ್ಷಣಿಕ ಧನಸಹಾಯ	10,896	27,679,600	227,489	1,038,126,292	95,637	533,279,365	125,403	724,788,917	38,307	271,704,560	497,732	2,595,578,734
ಮದುವೆ ಧನಸಹಾಯ	2,126	15,160,000	23,514	1,161,415,000	11,380	475,875,000	10,966	453,596,000	4,039	99,990,000	52,025	2,206,036,000
ಅಂತ್ಯ ಸಂಸ್ಕಾರಕ್ಕೆ ವೆಚ್ಚ	1,376	20,921,000	6,368	328,454,619	2,208	117,282,000	3,674	198,641,000	1,077	58,423,000	14,703	723,721,619
ಪ್ರಮುಖ ವೈದ್ಯಕೀಯ	233	8,104,269	2,272	63,982,540	530	12,829,473	778	22,668,307	319	11,187,038	4,132	118,771,627
ಅಪಘಾತ ಪರಿಹಾರ	195	14,777,740	185	25,574,260	58	13,781,000	116	31,957,000	79	9,980,000	633	96,070,000
ಹೆರಿಗೆ ಧನಸಹಾಯ	365	2,192,000	1,677	24,721,500	552	9,160,000	572	11,930,174	25	465,000	3,191	48,468,674
ವೈದ್ಯಕೀಯ ವೆಚ್ಚ	779	742,750	268	565,048	192	5,592,698	95	2,019,557	122	2,135,740	1,456	11,055,793
ಉಪಕರಣ ಖರೀದಿಗೆ ಸಾಲ	3	14,890	17	85,000	0	0	0	0	0	0	20	99,890
ಪಿಂಚಣಿ ಸೌಲಭ್ಯ	0	0	759	9,131,000	520	12,052,000	627	23,026,000	241	12,974,000	2,147	57,183,000
ದುರ್ಬಲತೆ ಪಿಂಚಣಿ	0	0	11	1,608,000	7	1,214,000	18	2,999,000	5	1,130,000	41	6,951,000
ಅನಿಲ ಭಾಗ್ಯ	0	0	0	20,000,000	4,055	0	0	0	0	0	4,055	20,000,000
ಶ್ರಮ ಸಾಮರ್ಥ್ಯ	0	0	1,854	83,995,481	3,157	56,972,953	623	90,170,239	0	0	5,634	231,138,673
ಬಿಎಂಟಿಸಿ ಬಸ್ ಪಾಸ್	0	0	0	52,479,000	1,602	0	2,996	594,300	0	0	4,598	53,073,300
ವಸತಿ ಸೌಲಭ್ಯ	0	0	0	0	0	0	5,129	760,000,000	0	0	5,129	760,000,000
ಶಿಶು ಪಾಲನಾ ಕೇಂದ್ರಗಳ ಸ್ಥಾಪನೆ	0	0	0	0	0	0	501	3,000,000	0	2,000,000	501	5,000,000
ಒಟ್ಟು	**15,973**	**8,95,92,249**	**2,64,414**	**281,01,37,740**	**1,19,898**	**123,80,38,489**	**1,51,498**	**232,53,90,494**	**44,214**	**46,99,89,338**	**5,95,997**	**693,31,48,310**

1220

ಅನುಬಂಧ–2

ಕಾರ್ಮಿಕ ಕಲ್ಯಾಣ ಯೋಜನೆಗಳ ಅಡಿಯಲ್ಲಿ ನೀಡುವ ಧನ ಸಹಾಯದ ವಿವರಗಳು

1. ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ : ಕನಿಷ್ಠ ರೂ. 3,000/–ಗಳಿಂದ ಗರಿಷ್ಠ ರೂ.10,000/– ವರೆಗೆ.
2. ಕಾರ್ಮಿಕರಿಗೆ ವೈದ್ಯಕೀಯ ನೆರವು : ಕನಿಷ್ಠ ರೂ. 500/– ಗಳಿಂದ ಗರಿಷ್ಠ ರೂ.10,000/– ವರೆಗೆ.
3. ಕಾರ್ಮಿಕರ ಅಪಘಾತ ಧನ ಸಹಾಯ : ಕನಿಷ್ಠ ರೂ. 1,000/– ಗಳಿಂದ ಗರಿಷ್ಠ ರೂ 3,000/– ವರೆಗೆ.
4. ಮೃತ ಕಾರ್ಮಿಕನ ಅಂತ್ಯ ಸಂಸ್ಕಾರಕ್ಕೆ ಧನ ಸಹಾಯ : ರೂ.5,000/–
5. ವಾರ್ಷಿಕ ವೈದ್ಯಕೀಯ ತಪಾಸಣೆ ಶಿಬಿರ ಹಮ್ಮಿಕೊಳ್ಳುವ ಟ್ರೇಡ್ ಯೂನಿಯನ್/ಸಂಸ್ಥೆಗಳಿಗೆ ಧನಸಹಾಯ : ಗರಿಷ್ಠ ರೂ. 30,000/–
6. ವಾರ್ಷಿಕ ಕ್ರೀಡಾ ಕೂಟ ಹಮ್ಮಿಕೊಳ್ಳುವ ನೊಂದಾಯಿತ ಕಾರ್ಮಿಕ ಸಂಘಗಳಿಗೆ ಧನಸಹಾಯ : ಗರಿಷ್ಠ ರೂ. 50,000/–

ಕ್ರಸಂ	ವರ್ಷ	2019–20	
	ಯೋಜನೆಗಳ ವಿವರ	ಫಲಾನುಭವಿ ಸಂಖ್ಯೆ	ಮೊತ್ತ ರೂ.
1	ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ	26,257	10,51,98,000
2	ವೈದ್ಯಕೀಯ ನೆರವು	5	45,252
3	ಮೃತ ಕಾರ್ಮಿಕನ ಅಂತ್ಯ ಸಂಸ್ಕಾರಕ್ಕೆ ಧನ ಸಹಾಯ.	295	14,75,000
4	ವೈದ್ಯಕೀಯ ತಪಾಸಣಾ ಶಿಬಿರ	400 (2 ಸಂಘಟನೆ)	60,000
5	ವಾರ್ಷಿಕ ಕ್ರೀಡಾ ಚಟುವಟಿಕೆ	600 (2 ಸಂಘಟನೆ)	1,00,000
6	**ವಾರ್ಷಿಕ ಕ್ರೀಡಾ ಚಟುವಟಿಕೆ**	**600 (2 ಸಂಘಟನೆ)**	**1,00,000**
	ಒಟ್ಟು	**27,557**	**10,68,78,252**

ಕರ್ನಾಟಕ ವಿಧಾನ ಸಭೆ

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1283
2. ಮಾನ್ಯ ಸದಸ್ಯರ ಹೆಸರು : ಶ್ರೀ ವೀರಭದ್ರಯ್ಯ ಎಂ. ವಿ (ಮಧುಗಿರಿ)
3. ಉತ್ತರಿಸಬೇಕಾದ ದಿನಾಂಕ : 24/09/2020
4. ಉತ್ತರಿಸುವವರು : ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು

ಕ್ರ.ಸಂ.	ಪ್ರಶ್ನೆ	ಉತ್ತರ
ಅ.	ರಾಜ್ಯದ ಮೂಲೆ ಮೂಲೆಗಳಿಂದ ಲಕ್ಷಾಂತರ ಕಾರ್ಮಿಕರು ಬೆಂಗಳೂರಿಗೆ ಬಂದು ನೆಲೆಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಮಹಿಳೆಯರು ಮತ್ತು ಪುರುಷ ಕಾರ್ಮಿಕರ/ವಿವರ ನೀಡುವುದು.	ಹೌದು ಕಾರ್ಮಿಕರ ವಾಸಸ್ಥಳದ ಮಾಹಿತಿ ದಾಖಲಿಸುವ ವ್ಯವಸ್ಥೆ ಕಾರ್ಮಿಕ ಇಲಾಖೆಯಲ್ಲಿ ಇಲ್ಲದಿರುವ ಕಾರಣ ಪುರುಷ ಹಾಗೂ ಮಹಿಳಾ ಕಾರ್ಮಿಕರೆಂದು ವರ್ಗೀಕರಿಸಲಾದ ಅಂಕಿ ಅಂಶಗಳು ಇಲಾಖೆಯಲ್ಲಿ ಲಭ್ಯವಿರುವುದಿಲ್ಲ.
ಆ.	ಕೋವಿಡ್-19 ಲಾಕ್‌ಡೌನ್ ಸಮಯದಲ್ಲಿ ಕಾರ್ಮಿಕರು ತೀವ್ರ ಸಂಕಷ್ಟಕ್ಕೆ ಒಳಗಾಗಿರುವುದು ನಿಜವೇ ಆಗಿದ್ದಲ್ಲಿ, ಆ ದಿಶೆಯಲ್ಲಿ ಸರ್ಕಾರವು ಕೈಗೊಂಡಿರುವ ಕ್ರಮಗಳೇನು;(ವಿವರ ನೀಡುವುದು)	ಸರ್ಕಾರವು ಸಂಕಷ್ಟಕ್ಕೆ ಗುರಿಯಾದ ಕಾರ್ಮಿಕರ ಹಿತರಕ್ಷಣೆಗೆ ಹಲವು ಕ್ರಮಗಳನ್ನು ಈ ಕೆಳಗಿನಂತೆ ಕ್ರಮಕೈಗೊಳ್ಳಲಾಗಿರುತ್ತದೆ. **ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ** ಕೋವಿಡ್-19 ಲಾಕ್‌ಡೌನ್ ಸಮಯದಲ್ಲಿ ತೀವ್ರ ಸಂಕಷ್ಟಕ್ಕೆ ಒಳಗಾದ ಕಾರ್ಮಿಕರ ಅನುಕೂಲಕ್ಕಾಗಿ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ವತಿಯಿಂದ ಕಟ್ಟಡ ಕಾರ್ಮಿಕರು ವಲಸೆ ಕಾರ್ಮಿಕರು ಮತ್ತು ಅಸಂಘಟಿತ ಕಾರ್ಮಿಕರ ರಕ್ಷಣೆಗಾಗಿ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ. 1. ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ಇಲ್ಲಿಯವರೆಗೆ 16,48,431 ನೋಂದಾಯಿತ ಕಟ್ಟಡ ಮತ್ತು ಇತರ ನಿರ್ಮಾಣ ಕಾರ್ಮಿಕರಿಗೆ ತಲಾ ರೂ.5,000/-ಗಳಂತೆ ಒಟ್ಟು ರೂ. 824.21 ಕೋಟಿ ಒಂದು ಬಾರಿ ಸಹಾಯ ಧನವನ್ನು ಕಾರ್ಮಿಕರ ಬ್ಯಾಂಕ್ ಖಾತೆಗಳಿಗೆ ನೇರವಾಗಿ ಜಮೆ ಮಾಡಲಾಗಿದೆ. 2. ಕಟ್ಟಡ ಮತ್ತು ವಲಸೆ ಕಟ್ಟಡ ಕಾರ್ಮಿಕರಿಗೆ ಕೋರೋನಾ ವೈರಸ್ ಬಗ್ಗೆ ಅರಿವು ಮೂಡಿಸಲು ಮತ್ತು ಮಾಸ್ಕ್ ಸ್ಯಾನಿಟೈಸರ್ ಹಾಗೂ ಸೋಪುಗಳನ್ನು ಕಾರ್ಮಿಕರಿಗೆ ವಿತರಣೆ ಮಾಡಲು

		41 ಉಪ ವಿಭಾಗ ಮಟ್ಟದ ಕಾರ್ಮಿಕ ಅಧಿಕಾರಿಗಳಿಗೆ ತಲಾ ರೂ.10 ಲಕ್ಷಗಳನ್ನು ಬಿಡುಗಡೆ ಮಾಡಲಾಗಿರುತ್ತದೆ. ೩. ಮಂಡಳಿಯ ವತಿಯಿಂದ ಬೆಂಗಳೂರಿನಲ್ಲಿ ಸ್ಥಾಪಿಸಲಾಗಿದ್ದ 10 ಶಿಶುಪಾಲನಾ ಕೇಂದ್ರಗಳಲ್ಲಿನ ಮಕ್ಕಳಿಗಾಗಿ Packed Nutrition Food & Toys ಗಳನ್ನು ಪೋಷಕರ ಮನೆಗಳಿಗೆ ತಲುಪಿಸಲಾಗಿರುತ್ತದೆ. 4. ಕಟ್ಟಡ ಮತ್ತು ವಲಸೆ ಕಟ್ಟಡ ಕಾರ್ಮಿಕರಿಗೆ ಆಹಾರ ಒದಗಿಸಲು ಮತ್ತು ಅವರ ಸಮಸ್ಯೆಗಳನ್ನು ಆಲಿಸಲು 24*7 ಸಹಾಯವಾಣಿ (155214) ಯನ್ನು ಸ್ಥಾಪಿಸಿ ಈ ಮೂಲಕ ದೂರುಗಳನ್ನು ಸ್ವೀಕರಿಸಿ ಸದರಿ ದೂರುಗಳಿಗೆ ಪರಿಹಾರ ಕ್ರಮಗಳನ್ನು ಕೈಗೊಳ್ಳಲಾಗಿದೆ. 5. ವಸತಿ ರಹಿತ ಕಟ್ಟಡ ಮತ್ತು ವಲಸೆ ಕಟ್ಟಡ ಕಾರ್ಮಿಕರಿಗೆ ಜಿಲ್ಲಾಡಳಿತದ ಸಹಕಾರದೊಂದಿಗೆ ವಸತಿ ಸೌಲಭ್ಯ ಮತ್ತು ಊಟದ ವ್ಯವಸ್ಥೆಯನ್ನು ಮಾಡಲಾಗಿರುತ್ತದೆ. 6. ಕಟ್ಟಡ ಮತ್ತು ವಲಸೆ ಕಟ್ಟಡ ಕಾರ್ಮಿಕರಿಗೆ ಲಾಕ್ ಡೌನ್ ಪ್ರಾರಂಭದಿಂದ ಇದುವರೆಗೂ 89.86 ಲಕ್ಷ ಸಿದ್ಧಪಡಿಸಿದ ಆಹಾರದ ಪ್ಯಾಕೆಟ್ ಗಳನ್ನು ವಿತರಿಸಲಾಗಿರುತ್ತದೆ. 7. ಕಟ್ಟಡ ಮತ್ತು ವಲಸೆ ಕಟ್ಟಡ ಕಾರ್ಮಿಕರಿಗೆ 6.08 ಲಕ್ಷ ಆಹಾರ ಸಾಮಾಗ್ರಿಗಳ ಕಿಟ್ ಗಳನ್ನು ವಿತರಿಸಲಾಗಿದೆ. 8. ವಲಸೆ ಕಾರ್ಮಿಕರನ್ನು ತಮ್ಮ ತವರು ರಾಜ್ಯಗಳಿಗೆ ವಿಶೇಷ ಶ್ರಮಿಕ ರೈಲುಗಳ ಮೂಲಕ ಕಳುಹಿಸಲು ಅಗತ್ಯ ಕ್ರಮ ಕೈಗೊಂಡು ಪ್ರಯಾಣದ ಸಮಯದಲ್ಲಿ ಸಿದ್ದಪಡಿಸಿದ ಆಹಾರ, ನೀರಿನ ಬಾಟೆಲ್‌ಗಳು, ಹಣ್ಣು, ಮತ್ತು ಅಗತ್ಯ ಸೌಲಭ್ಯಗಳನ್ನು ಒದಗಿಸಲಾಗಿರುತ್ತದೆ. **ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ** ಅಗಸರು ಹಾಗೂ ಕ್ಷೌರಿಕ ವೃತ್ತಿಯಲ್ಲಿ ತೊಡಗಿರುವ ಅಸಂಘಟಿತ ಕಾರ್ಮಿಕರಿಗೆ ತಲಾ ರೂ.5,000/-ಗಳ ಒಂದು ಬಾರಿಯ ನೆರವನ್ನು ಘೋಷಿಸಿದೆ. ರಾಜ್ಯದಲ್ಲಿ ಒಟ್ಟು 1,14,388 ಕ್ಷೌರಿಕರು ಹಾಗೂ ಅಗಸರಿಗೆ ತಲಾ 5,000/- ರಂತೆ 57.19 ಕೋಟಿ ರೂಪಾಯಿ ಮೊತ್ತವನ್ನು ಫಲಾನುಭವಿಗಳ ಖಾತೆಗೆ ನೇರ ವರ್ಗಾವಣೆಯ ಮೂಲಕ ಒದಗಿಸಿದೆ.

